ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:01/1:ಆರ್‌ಆರ್‌ಸಿ:2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,ಬೆಂಗಳೂರು
ದಿನಾಂಕ:02.02.2021.

ಟ1 54 3/2/21

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ ಸಚಿವಾಲಯ,
ವಿಧಾನ ಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: ಗೆ ಉತ್ತರವನ್ನು ಒದಗಿಸುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 743 ಗೆ ಉತ್ತರವನ್ನು ಸಿದ್ಧಪಡಿಸಿ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

(ರಮೇಶ್. ಡಿ.ಓ)
ಉಪ ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	743
ಸದಸ್ಯರ ಹೆಸರು	ಶ್ರೀ ಈಶ್ವರ್ ಖಂಡ್ರೆ (ಭಾಲ್ಕಿ)
ಉತ್ತರಿಸಬೇಕಾದ ದಿನಾಂಕ	03.02.2021

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	ಬೀದರ್ ಜಿಲ್ಲೆಯಲ್ಲಿ ಗ್ರಾಮ ವಿಕಾಸ ಯೋಜನೆಯಡಿ ಎಷ್ಟು ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ; ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ (ಸಂಪೂರ್ಣ ವಿವರ ಒದಗಿಸುವುದು);	ಗ್ರಾಮ ವಿಕಾದ ಯೋಜನೆಯಡಿ 25 ಗ್ರಾಮಗಳನ್ನು ಆಯ್ಕೆ ಮಾಡಿ ಒಟ್ಟು ರೂ.2325.00 ಲಕ್ಷಗಳನ್ನು ಬಿಡುಗಡೆ ಮಾಡಿ ಸಂಪೂರ್ಣವಾಗಿ ವೆಚ್ಚ ಮಾಡಲಾಗಿದ್ದು, ಯೋಜನೆಯೂ ಸಹಾ ಪೂರ್ಣಗೊಂಡಿದೆ. **(ವಿವರವನ್ನು ಅನುಬಂಧ-1ರಲ್ಲಿ ಲಗತ್ತಿಸಿದೆ.)**
ಆ.	ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಜಯಗಾವ್ ಗ್ರಾಮವನ್ನು ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆ ಮಾಡಲಾಗಿದ್ದು, ಹಣ ಬಿಡುಗಡೆಯಾಗಿದ್ದರೂ ಸಹ ಇಲ್ಲಿಯವರೆಗೆ ಕಾಮಗಾರಿ ಪ್ರಾರಂಭಿಸದೇ ಇರಲು ಕಾರಣವೇನು?	ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಜಯಗಾವ್ ಗ್ರಾಮವು ಮುಖ್ಯಮಂತ್ರಿ ಮಾದರಿ ಗ್ರಾಮ ಯೋಜನೆಯಡಿ ಆಯ್ಕೆಯಾಗಿರುತ್ತದೆ. ಈ ಯೋಜನೆಯಡಿ ಪರಿಶಿಷ್ಟ ಜನಾಂಗದ ಜನರು ವಾಸಿಸುವ ಪ್ರದೇಶವನ್ನು ಮಾತ್ರ ಅಭಿವೃದ್ಧಿಪಡಿಸಲು ಜಯಗಾವ್ ಗ್ರಾಮವನ್ನು ಆಯ್ಕೆ ಮಾಡಿ ರೂ.1.00 ಕೋಟಿಯನ್ನು ನಿಗದಿಪಡಿಸಿ 2018-19ನೇ ಸಾಲಿನಲ್ಲಿ ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ಅನುದಾನ ಬಿಡುಗಡೆ ಮಾಡಲಾಗಿದೆ. ಸ್ಥಳೀಯವಾಗಿ ಮಾನ್ಯ ಶಾಸಕರುಗಳ ಅದ್ಯಕ್ಷತೆಯ ಸಮಿತಿಯು ಯೋಜನೆಯ ಅನುಷ್ಠಾನದ ಹೊಣೆ ವಹಿಸುವ ಸಂಸ್ಥೆಗೆ ಹಣ ಬಿಡುಗಡೆ ಮಾಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್ ರವರಿಗೆ ಸೂಚನೆ ನೀಡಲಾಗಿದೆ. **(ವಿವರವನ್ನು ಅನುಬಂಧ-2ರಲ್ಲಿ ಲಗತ್ತಿಸಿದೆ.)**
ಇ.	ಈ ಕಾಮಗಾರಿಯನ್ನು ತಕ್ಷಣವೇ ಪ್ರಾರಂಭಿಸಲು ಸರ್ಕಾರ ಕ್ರಮವಹಿಸುವುದೇ?	ಅನುಷ್ಠಾನ ಸಂಸ್ಥೆ ಆಯ್ಕೆ ಮಾಡಿ ಕೂಡಲೇ ಕಾಮಗಾರಿಗಳನ್ನು ಪ್ರಾರಂಭಿಸಲು ಅಗತ್ಯ ಕ್ರಮ ವಹಿಸಬೇಕಿದೆ.

ಕಡತ ಸಂಖ್ಯೆ: ಗ್ರಾಅಪ:ಅಧಿ15/19:ಆರ್‌ಆರ್‌ಸಿ:2021

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ. ಗ್ರಾಅಪ 09 ಜಿಪಅ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 02.02.2021

137
u/s
3/2/21

ಇಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು.

ಇವರಿಗೆ:

ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ
ವಿಧಾನ ಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ:- ಕರ್ನಾಟಕ ವಿಧಾನ ಸಭೆ ಸದಸ್ಯರಾದ ಶ್ರೀ ಸಂಜೀವ ಮಠಂದೂರ್ (ಪುತ್ತೂರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 731ಕ್ಕೆ ಉತ್ತರ ಸಲ್ಲಿಸುವ ಬಗ್ಗೆ.

ಉಲ್ಲೇಖ:- ತಮ್ಮ ಪತ್ರ ಸಂಖ್ಯೆ ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.731/2021 ದಿನಾಂಕ. 23.01.2021.

ಕರ್ನಾಟಕ ವಿಧಾನ ಸಭೆ ಸದಸ್ಯರಾದ ಶ್ರೀ ಸಂಜೀವ ಮಠಂದೂರ್ (ಪುತ್ತೂರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 731ಕ್ಕೆ ಉತ್ತರವನ್ನು (25 ಪ್ರತಿಗಳು) ಮುಂದಿನ ಕ್ರಮಕ್ಕಾಗಿ ಇದರೊಂದಿಗೆ ಲಗತ್ತಿಸಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಶರಣಪ್ಪ ಎಂ.) 2/2/21
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ವ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

02/02/2021

ಕರ್ನಾಟಕ ವಿಧಾನ ಸಭೆ

1. ಸದಸ್ಯರ ಹೆಸರು – ಶ್ರೀ ಸಂಜೀವ ಮಠಂದೂರ್ (ಪುತ್ತೂರು)
2. ಪ್ರಶ್ನೆ ಸಂಖ್ಯೆ – 731
3. ಉತ್ತರಿಸಬೇಕಾದ ದಿನಾಂಕ: – 03.02.2021.
4. ಉತ್ತರಿಸುವ ಸಚಿವರು – ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪಿ.ಆರ್.ಡಿ ಇಂಜಿನಿಯರ್ ವಿಭಾಗದಲ್ಲಿ ಕಿರಿಯ ಅಭಿಯಂತರು ಹಾಗೂ ಸಹಾಯಕ ಅಭಿಯಂತರುಗಳ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಹೌದು.
ಆ)	ಹಾಗಿದ್ದಲ್ಲಿ, ತಾಲ್ಲೂಕು ಪಂಚಾಯತ್, ಜಿಲ್ಲಾ ಪಂಚಾಯತ್ ವಿಭಾಗಗಳಲ್ಲಿ ಕೆಲಸ ಕಾರ್ಯಗಳಿಗೆ ಅಡಚಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹಾಯಕ / ಕಿರಿಯ ಇಂಜಿನಿಯರ್‌ಗಳನ್ನು ಅಧಿಕ ಪ್ರಭಾರದಲ್ಲಿರಿಸಿ ಯಾವುದೇ ಕೆಲಸ / ಕಾಮಗಾರಿಗಳಿಗೆ ಅಡಚಣೆ ಉಂಟಾಗದಂತೆ ಕಾರ್ಯ ನಿರ್ವಹಿಸಿಲು ಕ್ರಮ ವಹಿಸಲಾಗಿದೆ.
ಇ)	ಬಂದಿದ್ದಲ್ಲಿ, ಹುದ್ದೆಗಳ ನೇಮಕಾತಿಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ?	ಪಂ.ರಾ.ಇಂ. ಇಲಾಖೆಯಲ್ಲಿ ಖಾಲಿ ಇರುವ 250 ಕಿರಿಯ ಇಂಜಿನಿಯರ್ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿ ನೀಡಿರುತ್ತದೆ. ಆದರೆ ಕೋವಿಡ್ – 19 ನಿಂದಾಗಿ ಆರ್ಥಿಕ ಇಲಾಖೆಯು ಸದರಿ ನೇಮಕಾತಿಯನ್ನು ತಡೆಹಿಡಿದಿರುತ್ತದೆ. ಈ ದಿಸೆಯಲ್ಲಿ ಪುನ: ಆರ್ಥಿಕ ಇಲಾಖೆಯನ್ನು ಸಂಪರ್ಕಿಸಲಾಗುವುದು.

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂ: ಟಿಡಿ 33 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 01 .02.2021.

U/S 18 03/02/21

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

ಇವರಿಗೆ:

ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಆನಂದ್ ಸಿದ್ದು ನ್ಯಾಮಗೌಡ, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 735 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಆನಂದ್ ಸಿದ್ದು ನ್ಯಾಮಗೌಡ. ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 735 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Mala S 01/02/2021
(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 735

ಸದಸ್ಯರ ಹೆಸರು : ಶ್ರೀ ಆನಂದ್ ಸಿದ್ದು ನ್ಯಾಮಗೌಡ (ಜಮಖಂಡಿ)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 03-02-2021

ಕ್ರ. ಸಂ	ಪ್ರಶ್ನೆ	ಉತ್ತರ
ಅ.	ಜಮಖಂಡಿ ಮತಕ್ಷೇತ್ರದ ಸಾವಳಗಿ ಹೋಬಳಿಯಲ್ಲಿ ಹೊಸದಾಗಿ ಬಸ್ ನಿಲ್ದಾಣ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಜಮಖಂಡಿ ಮತಕ್ಷೇತ್ರದ ಸಾವಳಗಿ ಹೋಬಳಿಯಲ್ಲಿ ಹೊಸದಾಗಿ ಬಸ್ ನಿಲ್ದಾಣ ಮಂಜೂರು ಮಾಡುವ ಪ್ರಸ್ತಾವನೆ ಇರುವುದಿಲ್ಲ.
ಆ.	ಹಾಗಿದ್ದಲ್ಲಿ, ಬಸ್ ನಿಲ್ದಾಣವನ್ನು ಯಾವಾಗ ಪ್ರಾರಂಭ ಮಾಡಲಾಗುವುದು; ಯಾವಾಗ ಮುಕ್ತಾಯಗೊಳಿಸಲಾಗುವುದು;	ಪ್ರಸ್ತುತ ಜಮಖಂಡಿ ಮತಕ್ಷೇತ್ರದ ಸಾವಳಗಿ ಗ್ರಾಮದಲ್ಲಿ ಬಸ್ ನಿಲ್ದಾಣಕ್ಕಾಗಿ ಸೂಕ್ತ ನಿವೇಶನ ಲಭ್ಯವಿರುವುದಿಲ್ಲ. ಸೂಕ್ತ ನಿವೇಶನ ದೊರೆತ ನಂತರ ಅಗತ್ಯತೆ ಹಾಗೂ ವಾ.ಕ.ರ.ಸಾ.ಸಂಸ್ಥೆಯ ಆರ್ಥಿಕ ಪರಿಸ್ಥಿತಿಗನುಗುಣವಾಗಿ ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಳ್ಳಲಾಗುತ್ತದೆ.
ಇ.	ಸದರಿ ಯೋಜನೆಗೆ ತಗಲುವ ವೆಚ್ಚವೆಷ್ಟು?	

ಸಂಖ್ಯೆ: ಟಿಡಿ 33 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

166
UIS
3/2/21

ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 44 ಎಲ್ಇಟಿ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 03/02/2021

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ,
ವಿಕಾಸಸೌಧ, ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ
ವಿಧಾನಸೌಧ, ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಉಮಾನಾಥ ಎ. ಕೋಟ್ಯಾನ್ (ಮೂಡಬಿದ್ರೆ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 745ಕ್ಕೆ ಉತ್ತರ ಸಲ್ಲಿಸುವ ಕುರಿತು.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಉಮಾನಾಥ ಎ. ಕೋಟ್ಯಾನ್ (ಮೂಡಬಿದ್ರೆ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 745ಕ್ಕೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಸೂಕ್ತ ಕ್ರಮಕ್ಕಾಗಿ ತಮಗೆ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

(ಪ್ರದೀಪ್ ಕುಮಾರ್ ಬಿ.ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ.

ಕರ್ನಾಟಕ ವಿಧಾನ ಸಭೆ

1.	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	745
2.	ಮಾನ್ಯ ಸದಸ್ಯರ ಹೆಸರು	ಶ್ರೀ ಉಮಾನಾಥ ಎ. ಕೋಟ್ಯಾನ್ (ಮೂಡಬಿದ್ರೆ)
3.	ಉತ್ತರಿಸಬೇಕಾದ ದಿನಾಂಕ	03/02/2021
4.	ಉತ್ತರಿಸುವವರು	ಮಾನ್ಯ ಕಾರ್ಮಿಕ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕೋವಿಡ್-19ರ ದುಷ್ಪರಿಣಾಮದಿಂದಾಗಿ ಗಾರ್ಮೆಂಟ್ಸ್ ಉದ್ಯಮವೂ ಸೇರಿದಂತೆ ವಿವಿಧ ಉದ್ಯೋಗ ವಲಯಗಳಲ್ಲಿ ಶ್ರಮಿಸುತ್ತಿರುವ ಮಹಿಳೆಯರು ಉದ್ಯೋಗ ಕಳೆದುಕೊಂಡು ಸಂಕಷ್ಟದಲ್ಲಿರುವ ಮಹಿಳೆಯರಿಗೆ ಇಲಾಖಾ ವತಿಯಿಂದ ಒದಗಿಸಿಕೊಟ್ಟ ಆರ್ಥಿಕ ನೆರವು ಮತ್ತಿತರ ಸಹಾಯ ಸೌಲಭ್ಯಗಳಾವುವು:	ಕೋವಿಡ್-19ರ ದುಷ್ಪರಿಣಾಮದಿಂದಾಗಿ ಗಾರ್ಮೆಂಟ್ಸ್ ಉದ್ಯಮವೂ ಸೇರಿದಂತೆ ವಿವಿಧ ಉದ್ಯೋಗ ವಲಯಗಳಲ್ಲಿ ಶ್ರಮಿಸುತ್ತಿರುವ ಮಹಿಳೆಯರು ಉದ್ಯೋಗ ಕಳೆದುಕೊಂಡ ಅಥವಾ ಉದ್ಯೋಗಾವಧಿಯು ಸ್ಥಗಿತಗೊಂಡು ಸಂಕಷ್ಟದಲ್ಲಿರುವ ಮಹಿಳೆಯರಿಗೆ ಕಾರ್ಮಿಕ ಇಲಾಖಾ ವತಿಯಿಂದ ಯಾವುದೇ ಆರ್ಥಿಕ ನೆರವನ್ನು ನೀಡಿರುವುದಿಲ್ಲ.
ಆ)	ಎಲ್ಲಾ ವಿಧದ ಮಹಿಳಾ ಕಾರ್ಮಿಕರು ಸಂಕಷ್ಟದಲ್ಲಿರುವುದನ್ನು ಗಮನಿಸಿ ಸರ್ಕಾರ ಅವರ ನೆರವಿಗೆ ರೂಪಿಸಿ ಅನುಷ್ಠಾನಗೊಳಿಸಿರುವ ಯೋಜನಾ ಸೌಲಭ್ಯಗಳು ಯಾವುವು?	ಸಂಕಷ್ಟದಲ್ಲಿರುವ ಎಲ್ಲಾ ವಿಧದ ಮಹಿಳಾ ಕಾರ್ಮಿಕರ ನೆರವಿಗಾಗಿ ಕಾರ್ಮಿಕ ಇಲಾಖೆಯ ವತಿಯಿಂದ ಯಾವುದೇ ಪ್ರತ್ಯೇಕ ಯೋಜನಾ ಸೌಲಭ್ಯವನ್ನು ರೂಪಿಸಿರುವುದಿಲ್ಲ. ಸರ್ಕಾರವು ಯಾವುದೇ ಯೋಜನಾ ಸೌಲಭ್ಯಗಳನ್ನು ರೂಪಿಸಿರುವುದಿಲ್ಲ.
ಇ)	ಮಹಿಳೆಯರು ಮತ್ತು ಮಕ್ಕಳು ಈ ಪರಿಸ್ಥಿತಿಯಲ್ಲಿರುವುದನ್ನು ಸಮೀಕ್ಷಿಸಿ ಅವರ ನೆರವಿಗಾಗಿ ವಿಶೇಷ ಕ್ರಿಯಾಯೋಜನೆಯನ್ನು ರೂಪಿಸಿ ಸಂರಕ್ಷಿಸಿ ಸರ್ಕಾರದ ಕ್ರಮಗಳೇನು?	

ಕಾಇ 44 ಎಲ್‌ಇಟಿ 2021

2/2/21

(ಅರೆಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:01/1:ಆರ್‌ಆರ್‌ಸಿ:2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,ಬೆಂಗಳೂರು
ದಿನಾಂಕ:02.02.2021.

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

46
16
3/2/21

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ ಸಚಿವಾಲಯ,
ವಿಧಾನ ಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: ಗೆ ಉತ್ತರವನ್ನು ಒದಗಿಸುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 662 ಗೆ ಉತ್ತರವನ್ನು ಸಿದ್ಧಪಡಿಸಿ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

(ರಮೇಶ್ ಡಿ.ಓ)
ಉಪ ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	662
ಸದಸ್ಯರ ಹೆಸರು	ಶ್ರೀ ಅಜಯ್ ಧರ್ಮ ಸಿಂಗ್ ಡಾ॥ (ಜೇವರ್ಗಿ)
ಉತ್ತರಿಸಬೇಕಾದ ದಿನಾಂಕ	03.02.2021

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	ಕಳೆದ ಮೂರು ವರ್ಷಗಳಿಂದ ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮದ (ಕೆ.ಆರ್.ಐ.ಡಿ.ಎಲ್)ವತಿಯಿಂದ ಜೇವರ್ಗಿ ವಿಧಾನಸಭಾ ಕ್ಷೇತ್ರದಲ್ಲಿ ಯಾವ ಯಾವ ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗಿದೆ (ಪೂರ್ಣ ವಿವರ ನೀಡುವುದು);	ಕಳೆದ ಮೂರು ವರ್ಷಗಳಿಂದ ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಗಮದ (ಕೆಆರ್ಐಡಿಎಲ್) ವತಿಯಿಂದ ಜೇವರ್ಗಿ ವಿಧಾನಸಭಾ ಕ್ಷೇತ್ರದಲ್ಲಿ ಕೈಗೊಂಡ ಕಾಮಗಾರಿಗಳ ವಿವರಗಳು ಕೆಳಕಂಡಂತಿವೆ. (ಕೆಳಗಿನ ಕೋಷ್ಟಕ ನೋಡಿ) ಕಾಮಗಾರಿಗಳಿಗೆ ಸಂಬಂಧಿಸಿದ ಪೂರ್ಣ ವಿವರಗಳನ್ನು **ಅನುಬಂಧ-1** ರಲ್ಲಿ ಲಗತ್ತಿಸಿದೆ.
ಆ.	ಸದರಿ ಕಾಮಗಾರಿಗಳಿಗೆ ಬಿಡುಗಡೆಗೊಳಿಸಲಾದ ಅನುದಾನದ ಮೊತ್ತವೆಷ್ಟು (ವಿವರ ನೀಡುವುದು);	ವಿವರಗಳನ್ನು **ಅನುಬಂಧ-1** ರಲ್ಲಿ ಲಗತ್ತಿಸಿದೆ.

Table in answer ಅ.:

ರೂ.ಲಕ್ಷಗಳಲ್ಲಿ

ಕ್ರ.ಸಂ	ವರ್ಷ	ವಹಿಸಿದ ಕಾಮಗಾರಿಗಳ ಸಂಖ್ಯೆ	ಅಂದಾಜು ಮೊತ್ತ	ಬಿಡುಗಡೆಯಾದ ಅನುದಾನ	ವೆಚ್ಚ	ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ	ಪ್ರಗತಿಯಲ್ಲಿರುವ ಕಾಮಗಾರಿಗಳ ಸಂಖ್ಯೆ	ಪ್ರಾರಂಭಿಸದೇ ಇರುವ ಕಾಮಗಾರಿಗಳ ಸಂಖ್ಯೆ	ಷರಾ
1	2017-18	135	694.65	444.35	438.40	66	12	57	
2	2018-19	10	200.92	175.80	170.29	8	2	0	
3	2019-20	12	401.03	399.91	357.03	9	2	1	
	ಒಟ್ಟು	157	1296.60	1020.06	965.72	83	16	58	

ಇ	ಪ್ರಾರಂಭಿಸಲಾಗಿರುವ ಕಾಮಗಾರಿಗಳ ಪೈಕಿ ಪೂರ್ಣಗೊಂಡಿರುವ ಹಾಗೂ ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು (ವಿವರ ನೀಡುವುದು);	ಪ್ರಾರಂಭಿಸಲಾಗಿರುವ ಕಾಮಗಾರಿಗಳ ಪೈಕಿ ಪೂರ್ಣಗೊಂಡಿರುವ ಹಾಗೂ ಅಪೂರ್ಣಗೊಂಡಿರುವ ಕಾಮಗಾರಿಗಳ ವಿವರಗಳು ಕೆಳಕಂಡಂತಿವೆ. (ಕೆಳಗಿನ ಕೋಷ್ಟಕ ನೋಡಿ) ವಿವರಗಳನ್ನು ಅನುಬಂಧ-2 ರಲ್ಲಿ ಲಗತ್ತಿಸಿದೆ.
ಈ	ಅಪೂರ್ಣಗೊಂಡಿರುವ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ಹಾಗೂ ಸದರಿ ಕಾಮಗಾರಿಗಳ ವಿಳಂಬಕ್ಕೆ ಕಾರಣಗಳೇನು (ಪೂರ್ಣ ವಿವರ ನೀಡುವುದು)?	ಕಳೆದ ಮೂರು ವರ್ಷಗಳಿಂದ ಜೇವರ್ಗಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ 157 ಕಾಮಗಾರಿಗಳನ್ನು ವಹಿಸಿದ್ದು, ಅದರಲ್ಲಿ 83 ಕಾಮಗಾರಿಗಳು ಪೂರ್ಣಗೊಂಡಿದ್ದು, ಪ್ರಗತಿಯಲ್ಲಿರುವ 16 ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲಾಗುವುದು. 58 ಕಾಮಗಾರಿಗಳ ಪ್ರಾರಂಭಿಸಬೇಕಾಗಿದ್ದು, ಸದರಿ ಕಾಮಗಾರಿಗಳಿಗೆ ನಿಗದಿತ ಅವಧಿಯೊಳಗೆ ಅನುದಾನ ಬಿಡುಗಡೆಯಾಗದ ಹಿನ್ನಲೆ ಹಾಗೂ ಕೋವಿಡ್-19 ಕಾರಣ ಕಾಮಗಾರಿಗಳು ವಿಳಂಬವಾಗಿರುತ್ತದೆ. (ಪೂರ್ಣ ವಿವರಗಳನ್ನು ಅನುಬಂಧ-1 & 2ರಲ್ಲಿ ಲಗತ್ತಿಸಲಾಗಿದೆ)

ಕ್ರ.ಸಂ	ವರ್ಷ	ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ	ಪ್ರಗತಿಯಲ್ಲಿರುವ ಕಾಮಗಾರಿಗಳ ಸಂಖ್ಯೆ	ಪ್ರಾರಂಭಿಸದೇ ಇರುವ ಕಾಮಗಾರಿಗಳ ಸಂಖ್ಯೆ	ಷರಾ
1	2017-18	66	12	57	
2	2018-19	8	2	0	
3	2019-20	9	2	1	
	ಒಟ್ಟು	83	16	58	

ಕಡತ ಸಂಖ್ಯೆ: ಗ್ರಾಅಪ:ಅಧಿ-15/23:ಆರ್‌ಆರ್‌ಸಿ:2021

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ಮಮಇ 26 ಪಿಹೆಚ್‌ಪಿ 2021

ಕರ್ನಾಟಕ ಸರ್ಕಾರ ಸಚಿವಾಲಯ
3ನೇ ಗೇಟ್, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:02.02.2021

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬಹುಮಹಡಿಗಳ ಕಟ್ಟಡ, ಬೆಂಗಳೂರು-1.

4B 150 3/2/4

ಇವರಿಗೆ;
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ,
ಬೆಂಗಳೂರು-560 001.

ಮಾನ್ಯರೆ,

ವಿಷಯ: ಶ್ರೀಮತಿ ಸೌಮ್ಯ ರೆಡ್ಡಿ, ಮಾನ್ಯ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:647ಕ್ಕೆ ಉತ್ತರ ಸಲ್ಲಿಸುವ ಬಗ್ಗೆ.

ಉಲ್ಲೇಖ: ಕರ್ನಾಟಕ ವಿಧಾನ ಸಭೆ ಸಚಿವಾಲಯದ ಪತ್ರ ಸಂಖ್ಯೆ:ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.647/2021, ದಿ:23.01.2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀಮತಿ ಸೌಮ್ಯ ರೆಡ್ಡಿ, ಮಾನ್ಯ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:647ಕ್ಕೆ ಸಂಬಂಧಿಸಿದಂತೆ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿ ಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

G.H. Sarojamma
(ಜಿ. ಹೆಚ್. ಸರೋಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ – 2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 647
ಮಾನ್ಯ ವಿಧಾನಸಭೆ ಸದಸ್ಯರ ಹೆಸರು : ಶ್ರೀಮತಿ ಸೌಮ್ಯ ರೆಡ್ಡಿ (ಜಯನಗರ)
ಉತ್ತರಿಸಬೇಕಾದ ದಿನಾಂಕ : 03.02.2021
ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಹಿರಿಯ ನಾಗರಿಕರ ಗುರುತಿನ ಚೀಟಿಗಳನ್ನು ಸೇವಾ ಸಿಂಧು ಪೋರ್ಟಲ್‌ನಲ್ಲಿ ಪಡೆಯಲು ಸಾಧ್ಯವಾಗುತ್ತಿಲ್ಲದಿರುವುದು ನಿಜವೇ? ಹಿರಿಯ ನಾಗರಿಕರು ಗುರುತಿನ ಚೀಟಿಯನ್ನು ಆಫ್‌ಲೈನ್ ಸೇವೆ ಅಥವಾ ಆನ್‌ಲೈನ್ ಸೇವೆಯ ಮೂಲಕ ದೊರಕಿಸಿ ಕೊಡಲು ಮನವಿಗಳನ್ನು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	• ಹಿರಿಯ ನಾಗರಿಕರ ಗುರುತಿನ ಚೀಟಿಗಳನ್ನು ಸೇವಾ ಸಿಂಧು ಪೋರ್ಟಲ್‌ನಲ್ಲಿ ಪಡೆಯಲಾಗುತ್ತಿದೆ. • ಹಿರಿಯ ನಾಗರಿಕರು ಗುರುತಿನ ಚೀಟಿಯನ್ನು ಆಫ್‌ಲೈನ್ ಸೇವೆ ಅಥವಾ ಆನ್‌ಲೈನ್ ಸೇವೆಯ ಮೂಲಕ ದೊರಕಿಸಿಕೊಡಲು ಮನವಿಗಳನ್ನು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.
ಆ)	ಸಿ.ಎಸ್.ಸಿ ಸೇವಾ ಸಿಂಧು ಪೋರ್ಟಲ್‌ನಲ್ಲಿ ಹಿರಿಯ ನಾಗರಿಕರು ಗುರುತಿನ ಚೀಟಿಯ ಅರ್ಜಿಗಳನ್ನು ಹಾಕಿದರೂ ಸಹ ಸರ್ವರ್‌ಗಳು ಸರಿಯಾಗಿ ಕಾರ್ಯ ನಿರ್ವಹಿಸುತ್ತಿಲ್ಲದ ಕಾರಣ ಈ ಸಂಬಂಧ ಯಾವ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ (ವಿವರವಾದ ಮಾಹಿತಿ ಒದಗಿಸುವುದು)?	ಸಿ.ಎಸ್.ಸಿ ಸೇವಾ ಸಿಂಧು ಪೋರ್ಟಲ್‌ನಲ್ಲಿ ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ಪಡೆಯಲು ಯಾವುದೇ ಸರ್ವರ್ ಸಮಸ್ಯೆಗಳು ಉದ್ಭವಿಸಿರುವುದಿಲ್ಲ. ಕೆಲವು ಸಂದರ್ಭಗಳಲ್ಲಿ ತಂತ್ರಾಂಶವನ್ನು ಉನ್ನತೀಕರಿಸುವ ವೇಳೆಯಲ್ಲಿ ಕೆಲವು ಗಂಟೆಗಳ ಕಾಲ ವಿಳಂಬವಾಗಬಹುದು ಉಳಿದಂತೆ ಸರ್ವರ್‌ಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದೆ.

ಸಂಖ್ಯೆ: ಮಮಇ 26 ಪಿಹೆಚ್‌ಪಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ
ಇಲಾಖೆ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ಮಮಇ 32 ಪಿಹೆಚ್‌ಪಿ 2021

ಕರ್ನಾಟಕ ಸರ್ಕಾರ ಸಚಿವಾಲಯ
3ನೇ ಗೇಟ್, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:02.02.2021

ಇವರಿಂದ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬಹುಮಹಡಿಗಳ ಕಟ್ಟಡ, ಬೆಂಗಳೂರು-1.

ಇವರಿಗೆ;

ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ,
ಬೆಂಗಳೂರು-560 001.

ಮಾನ್ಯರೆ,

ವಿಷಯ: ಶ್ರೀ ಹ್ಯಾರಿಸ್ ಎನ್. ಎ., ಮಾನ್ಯ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:589ಕ್ಕೆ ಉತ್ತರ ಸಲ್ಲಿಸುವ ಬಗ್ಗೆ.

ಉಲ್ಲೇಖ: ಕರ್ನಾಟಕ ವಿಧಾನ ಸಭೆ ಸಚಿವಾಲಯದ ಪತ್ರ ಸಂಖ್ಯೆ:ಪ್ರಶಾವಿಸ/15ನೇವಿಸ/9ಅ/ಪ್ರ.ಸಂ/589/2021, ದಿ:23.01.2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ಹ್ಯಾರಿಸ್ ಎನ್. ಎ., ಮಾನ್ಯ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:589ಕ್ಕೆ ಸಂಬಂಧಿಸಿದಂತೆ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿ ಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

G. H. Sarojamma

(ಜಿ. ಹೆಚ್. ಸರೋಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ - 2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	589
ಮಾನ್ಯ ವಿಧಾನಸಭೆ ಸದಸ್ಯರ ಹೆಸರು	:	ಶ್ರೀ ಹ್ಯಾರಿಸ್ ಎನ್.ಎ (ಶಾಂತಿ ನಗರ)
ಉತ್ತರಿಸಬೇಕಾದ ದಿನಾಂಕ	:	03.02.2021
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಅಂಗವಿಕಲರಿಗೆ ದೇಶಾದ್ಯಂತ ಉಪಯೋಗಕ್ಕೆ ಬರುವ ಮತ್ತು ವಿಶೇಷ ಮಾಹಿತಿಗಳನ್ನೊಳಗೊಂಡ ಅಂಗವಿಕಲರ ವಿಶಿಷ್ಟ ಗುರುತಿನ ಚೀಟಿ (ಯುಡಿಐಡಿ) ಯನ್ನು ಒದಗಿಸಿಕೊಡುವ ದಿಶೆಯಲ್ಲಿ ವಿಕಲಚೇತನರ ಸಬಲೀಕರಣ ಇಲಾಖೆಯ ಗುರಿ ಮತ್ತು ಸಾಧನೆಗಳೇನು: (ವಿವರ ನೀಡುವುದು)	• **ವಿಕಲಚೇತನರಿಗೆ ವಿಶಿಷ್ಟ ಗುರುತಿನ ಚೀಟಿ(UNIQUE DISABILITY ID)**ನೀಡುವ ಯೋಜನೆಯು 2019ರ ಏಪ್ರಿಲ್ ನಿಂದ ಕೇಂದ್ರ ಸರ್ಕಾರದ ಪ್ರಾಯೋಜಿತ ಯೋಜನೆಯಾಗಿದೆ. • **2011ರ** ಜನಗಣತಿಯ ಪ್ರಕಾರ 13,24,205 ವಿಕಲಚೇತನರಿದ್ದು, ಪ್ರಸ್ತುತ 5,32,332 ವಿಕಲಚೇತನರು ಗುರುತಿನ ಚೀಟಿಗಾಗಿ ನೊಂದಣಿ ಮಾಡಿಕೊಂಡಿದ್ದು, 234157 ವಿಕಲಚೇತನರಿಗೆ ಕಾರ್ಡನ್ನು ವಿತರಿಸಲಾಗಿದೆ. • ಈ ವಿಶಿಷ್ಟ ಗುರುತಿನ ಚೀಟಿಯ ಬಗ್ಗೆ ಇಲಾಖೆಯಿಂದ ವ್ಯಾಪಕ ಪ್ರಚಾರವನ್ನು ನೀಡಲಾಗಿದೆ, ಮತ್ತು ಗ್ರಾಮ ಮಟ್ಟದಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು, ತಾಲ್ಲೂಕು ಮಟ್ಟದಲ್ಲಿ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರನ್ನು ಬಳಸಿಕೊಂಡು ಇನ್ನು ಹೆಚ್ಚಿನ ಸಂಖ್ಯೆಯಲ್ಲಿ ವಿಕಲಚೇತನರಿಗೆ ಕಾರ್ಡನ್ನು ವಿತರಿಸುವ ಕ್ರಮವನ್ನು ಕೈಗೊಳ್ಳಲಾಗುತ್ತಿದೆ. • ಈ ವಿಶಿಷ್ಟ ಗುರುತಿನ ಚೀಟಿಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿಯಲ್ಲಿನ ವೈದ್ಯಕೀಯ ಪ್ರಾಧಿಕಾರಗಳಿಂದ ದೃಢೀಕರಿಸಿ ನೀಡಬೇಕಾಗಿರುವುದರಿಂದ ಆ ಇಲಾಖೆಯ ಸಹಕಾರವನ್ನು ಸಹ ಪಡೆದು ಯೋಜನೆಯನ್ನು ನಿರ್ವಹಿಸಲಾಗುತ್ತಿದೆ.
ಆ)	ರಾಜ್ಯಾದಾದ್ಯಂತ ಇಲಾಖಾ ಕಾರ್ಯಾಲಯಗಳು ಅಧಿಕಾರಿ ಸಿಬ್ಬಂದಿ ವರ್ಗಗಳಿದ್ದರೂ ಕಾರ್ಡ್ ನೀಡಿಕೆಯೂ ಸೇರಿದಂತೆ ಸರ್ಕಾರದ ಯೋಜನಾ ಸೌಲಭ್ಯಗಳನ್ನು ಸಂಬಂಧಪಟ್ಟವರಿಗೆ ತಲುಪಿಸಲು ವಿಳಂಬ ಮತ್ತು ಲೋಪಗಳು ಉಂಟಾಗಲು ಕಾರಣಗಳೇನು:	• ರಾಜ್ಯಾದಾದ್ಯಂತ ಇಲಾಖಾ ಯೋಜನಾ ಸೌಲಭ್ಯಗಳನ್ನು ಮತ್ತು ಕಾರ್ಡ್‌ಗಳ ನೀಡಿಕೆಯನ್ನು ಸಂಬಂಧಪಟ್ಟವರಿಗೆ ತಲುಪಿಸಲು ಇಲಾಖೆಯಿಂದ ಯಾವುದೇ ವಿಳಂಬ ಮತ್ತು ಲೋಪಗಳು ಇಲ್ಲದಂತೆ ನಿರ್ವಹಿಸಲು ಕ್ರಮವಹಿಸಲಾಗುತ್ತಿದೆ. • ವಿಕಲಚೇತನರಿಗೆ ಯು.ಡಿ.ಐ.ಡಿ ಕಾರ್ಡ್‌ಗಳನ್ನು ನೀಡಬೇಕಾದಲ್ಲಿ ವಿಕಲಚೇತನರು ತಾಲ್ಲೂಕು / ಜಿಲ್ಲಾ ಮಟ್ಟದಲ್ಲಿ ಸರ್ಕಾರದಿಂದ ನೇಮಿಸಲಾಗಿರುವ ವೈದ್ಯಕೀಯ ಪ್ರಾಧಿಕಾರದ ಮುಂದೆ ತಪಾಸಣೆಗಾಗಿ ವೈಯಕ್ತಿಕವಾಗಿ ಹಾಜರಾಗಬೇಕಾಗುತ್ತದೆ. ರಾಜ್ಯದಲ್ಲಿ ಕೋವಿಡ್ 19ರ ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ವೈದ್ಯಕೀಯ ತಪಾಸಣೆಯು ನಿಧಾನಗತಿಯಲ್ಲಿರುವ ಕಾರಣ ಯು.ಡಿ.ಐ.ಡಿ ಕಾರ್ಡ್‌ಗಳನ್ನು ವಿತರಿಸಲು ಸ್ವಲ್ಪ ಹಿನ್ನಡೆಯಾಗಿರುತ್ತದೆ. • ಇಲಾಖೆಯ ಇತರೆ ಯೋಜನೆಗಳು ಫಲಾನುಭವಿಗಳಾಧಾರಿತ ಯೋಜನೆಗಳಾಗಿರುವುದರಿಂದ ಪ್ರಸ್ತುತ ವರ್ಷ ರಾಜ್ಯದಲ್ಲಿ ಕೋವಿಡ್ 19ರ ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಆಡಳಿತಾತ್ಮಕ ಸಮಸ್ಯೆಗಳು ಉಂಟಾಗಿದ್ದರಿಂದ ಯೋಜನೆಗಳ ಅನುಷ್ಠಾನದಲ್ಲಿ ವಿಳಂಬವಾಗಿರುವ ಸಾಧ್ಯತೆ ಇರುತ್ತದೆ. ಆದಾಗ್ಯೂ ಸಹ ಇಲಾಖೆಯು ಪ್ರಸ್ತುತ ವರ್ಷದಲ್ಲಿ ಯೋಜನೆಗಳ ಸೌಲಭ್ಯಗಳನ್ನು ವಿಕಲಚೇತನರಿಗೆ ತಲುಪಿಸಲು ಪ್ರಾಮಾಣಿಕವಾಗಿ ಕ್ರಮವಹಿಸಲಾಗುತ್ತಿದೆ.

ಇ)	ವಿಶಿಷ್ಟಚೇತನರು ಇಲಾಖಾ ಕಾರ್ಯಾಲಯಗಳಿಗೆ ಪದೇ ಪದೇ ಬರುವುದು ಕಷ್ಟ ಸಾಧ್ಯವೆಂದು ತಿಳಿದಿದ್ದರೂ ಯೋಜನಾ ಸೌಲಭ್ಯಗಳನ್ನು ಅವರಿದ್ದಲ್ಲಿಗೆ ಹೋಗಿ ಒದಗಿಸಿಕೊಡಲು ಸರ್ಕಾರ ಕ್ರಮ ಜರುಗಿಸುವುದೇ?	• ವಿಕಲಚೇತನರಿಗೆ ಅವರಿದ್ದಲ್ಲಿಗೆ ಯೋಜನೆಗಳ ಸೌಲಭ್ಯಗಳನ್ನು ತಲುಪಿಸಲು ಇಲಾಖೆಯಿಂದ ಗ್ರಾಮೀಣ ಪುನರ್ವಸತಿ ಯೋಜನೆಯನ್ನು ಜಾರಿಗೊಳಿಸುತ್ತಿದೆ. • ಇಲಾಖೆಯು ಗ್ರಾಮೀಣ ಮಟ್ಟದಲ್ಲಿನ ವಿಕಲಚೇತನ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಮುಖಾಂತರ ಅವರ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯತಿ ಮಟ್ಟದಲ್ಲಿನ ವಿಕಲಚೇತನರನ್ನು ಗುರುತಿಸಿ ಅವರುಗಳಿಗೆ ಯೋಜನಾ ಸೌಲಭ್ಯಗಳನ್ನು ಒದಗಿಸಲು ಕ್ರಮಕೈಗೊಳ್ಳಲಾಗಿದೆ. • ನಗರ ಪ್ರದೇಶಗಳಲ್ಲಿ ನಗರ ಪುನರ್ವಸತಿ ಕಾರ್ಯಕರ್ತರ ಮುಖಾಂತರ ಯೋಜನಾ ಸೌಲಭ್ಯಗಳನ್ನು ವಿಕಲಚೇತನರಿಗೆ ತಲುಪಿಸುವ ಕಾರ್ಯವನ್ನು ನಿರ್ವಹಿಸಲಾಗುತ್ತಿದೆ. • ತಾಲ್ಲೂಕು ಮಟ್ಟದಲ್ಲಿ ವಿಕಲಚೇತನರಾಗಿರುವ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರ ಮುಖಾಂತರ ಯೋಜನಾ ಸೌಲಭ್ಯಗಳನ್ನು ವಿಕಲಚೇತನರಿಗೆ ತಲುಪಿಸುವ ಕಾರ್ಯವನ್ನು ನಿರ್ವಹಿಸಲಾಗುತ್ತಿದೆ. • ವಿಕಲಚೇತನರಿಗೆ ಇಲಾಖೆಯು ಅನುಷ್ಠಾನಗೊಳಿಸಿರುವ ಯೋಜನೆಗಳ ಸೌಲಭ್ಯ ಪಡೆಯಲು ಅನುಕೂಲವಾಗುವಂತೆ ಜಿಲ್ಲಾ ಮಟ್ಟದಲ್ಲಿ ಮಾಹಿತಿಗಳನ್ನು ಒದಗಿಸಲು ಜಿಲ್ಲಾ ಕಛೇರಿಗಳಲ್ಲಿ ಮಾಹಿತಿ ಸಲಹಾ ಕೇಂದ್ರಗಳನ್ನು ತೆರೆಯಲಾಗಿದೆ. • ಈ ಮೇಲೆ ತಿಳಿಸಿರುವ ಎಲ್ಲಾ ಕಾರ್ಯಕರ್ತರುಗಳು ಈ ಇಲಾಖೆಯ ಸೌಲಭ್ಯಗಳಲ್ಲದೇ ಇತರೆ ಇಲಾಖೆಗಳಲ್ಲಿ ವಿಕಲಚೇತನರಿಗಾಗಿ ಇರುವ ಯೋಜನೆಗಳ ಮಾಹಿತಿಯನ್ನು ಸಹ ನೀಡುವುದರ ಜೊತೆಗೆ ಅವುಗಳನ್ನು ಪಡೆಯಲು ಸಹ ಸಹಕಾರಿಯಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.
ಈ)	ಯುಡಿಐಡಿ ಕಾರ್ಡ್‌ಗಳ ಹಂಚಿಕೆ ಕುರಿತು ಬಾಕಿ ಉಳಿದಿರುವವರಿಗೆ ಗಂಭೀರ ಮತ್ತು ಪ್ರಾಮುಖ್ಯತೆ ನೀಡಿ ತಲುಪಿಸಲು ಇಲಾಖೆಯ ಕ್ರಮಗಳೇನು?	• ಯು.ಡಿ.ಐ.ಡಿ ಕಾರ್ಡ್‌ಗಳ ಮಹತ್ವದ ಬಗ್ಗೆ ವ್ಯಾಪಕವಾಗಿ ಎಫ್.ಎಂ.ರೇಡಿಯೋದಲ್ಲಿ, ಜಾಹಿರಾತುಗಳ ಮುಖಾಂತರ, ಬ್ಯಾನರ್ ಹಾಗೂ ಪೋಸ್ಟರ್‌ಗಳನ್ನು ಮುದ್ರಿಸಿ ಎಲ್ಲಾ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ, ನಗರ ಪ್ರದೇಶಗಳಲ್ಲಿ ಹಾಗೂ ಜಿಲ್ಲಾ ಮಟ್ಟದಲ್ಲಿ ಅರಿವು ಮೂಡಿಸಲಾಗುತ್ತಿದೆ. • ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ ನೇಮಿಸಲಾಗಿರುವ ವೈದ್ಯಕೀಯ ಪ್ರಾಧಿಕಾರಗಳನ್ನು ಅತೀ ಶೀಘ್ರವಾಗಿ ವೈದ್ಯಕೀಯ ದೃಢೀಕರಣ ಪ್ರಮಾಣ ಪತ್ರವನ್ನು ನೀಡುವಂತೆ ಕೋರಲಾಗಿದೆ. • ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು, ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರು, ನಗರ ಪುನರ್ವಸತಿ ಕಾರ್ಯಕರ್ತರಿಗೆ ಗುರುತಿನಚೀಟಿ ಸೌಲಭ್ಯವನ್ನು ವಿಕಲಚೇತನರಿಗೆ ಒದಗಿಸಿ ಕೊಡಲು ತುರ್ತಾಗಿ ಕಾರ್ಯನಿರ್ವಹಿಸುವಂತೆ ಸೂಚನೆ ನೀಡಲಾಗಿದೆ. • ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಈ ಬಗ್ಗೆ ಹೆಚ್ಚಿನ ಗಮನ ಹರಿಸಿ ಅಂಗವಿಕಲರಿಗೆ ಗುರುತಿನ ಚೀಟಿಯನ್ನು ದೊರಕಿಸಿಕೊಡಲು ಕ್ರಮವಹಿಸುವಂತೆ ಸೂಚಿಸಲಾಗಿದೆ.

ಸಂಖ್ಯೆ: ಮಮಇ 32 ಪಿಹೆಚ್‌ಪಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ
ಸಚಿವರು

ಕರ್ನಾಟಕ ಸರ್ಕಾರ

ಸಂ.ಕಂಇ 19 ಎಸ್‌ಎಸ್‌ಸಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು ದಿನಾಂಕ: 30.01.2021.

177
4/5
03/2/2021

ಇಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ,
ಬೆಂಗಳೂರು.

ಇವರಿಗೆ:

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ,
ವಿಧಾನಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನಸಭಾ ಸದಸ್ಯರಾದ ಡಾ: ಯತೀಂದ್ರ ಸಿದ್ದರಾಮಯ್ಯ (ವರುಣ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 377 ಕ್ಕೆ ಉತ್ತರಿಸುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನಸಭಾ ಸದಸ್ಯರಾದ ಡಾ: ಯತೀಂದ್ರ ಸಿದ್ದರಾಮಯ್ಯ (ವರುಣ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 377 ಕ್ಕೆ ಸಂಬಂಧಿಸಿದಂತೆ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

Rajyashree V.T. 30/1

(ವಿ.ಟಿ.ರಾಜ್ಯಶ್ರೀ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ(ಭೂಮಾಪನ)

ಕರ್ನಾಟಕ ವಿಧಾನಸಭೆ

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	377 (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಿಂದ ವರ್ಗಾವಣೆಗೊಂಡಿರುವ)
2	ಸದಸ್ಯರ ಹೆಸರು	ಡಾ: ಯತೀಂದ್ರ ಸಿದ್ಧರಾಮಯ್ಯ (ವರುಣ)
3	ಉತ್ತರಿಸಬೇಕಾದ ದಿನಾಂಕ	03.02.2021
4	ಉತ್ತರಿಸುವ ಸಚಿವರು	ಕಂದಾಯ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿನ ಗ್ರಾಮಠಾಣಗಳನ್ನು ಸರ್ವೆ ಮಾಡಲು ಸರ್ಕಾರವು ಕೈಗೊಂಡ ಕ್ರಮಗಳೇನು;	**-: ರಾಜ್ಯದಲ್ಲಿನ ಗ್ರಾಮಠಾಣಗಳನ್ನು ಅಳತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳು:-** ಸರ್ಕಾರದ ಸುತ್ತೋಲೆ ಸಂ.ಆರ್.ಡಿ. 430 ಎಲ್.ಜಿಪಿ 2013 ದಿನಾಂಕ: 25-8-2014 ಮತ್ತು ಇಲಾಖೆ ಸುತ್ತೋಲೆ ಸಂ.ಪಿಎಂಯು. ಎಂಜಿ.ಸಿಐಆರ್.006/2014-15 ದಿನಾಂಕ. 5-11-2014 ಗಳನ್ವಯ ಗ್ರಾಮಠಾಣಾ ಆಸ್ತಿಗಳನ್ನು ಅಳತೆ ಮಾಡಿ ಸದರಿ ಆಸ್ತಿಯು ಗ್ರಾಮಠಾಣಾದ ಒಳಗಡೆ ಬರುತ್ತಿದ್ದಲ್ಲಿ ಇ-ಸ್ವತ್ತು ನಕ್ಷೆ ತಯಾರಿಸಿ, ನಂತರ ಸದರಿ ನಕ್ಷೆಯನ್ನು ಸಂಬಂಧಿಸಿದ ಹೋಬಳಿ ಮಟ್ಟದಲ್ಲಿರುವ ಅಟಲ್-ಜೀ ಜನಸ್ನೇಹಿ ಕೇಂದ್ರದ ಮುಖಾಂತರ ಸಾರ್ವಜನಿಕರಿಗೆ ವಿತರಿಸಲಾಗುತ್ತಿದೆ. ಒಂದು ವೇಳೆ ಆಸ್ತಿಯು ಗ್ರಾಮಠಾಣಾದ ಹೊರಗಡೆ ಬರುತ್ತಿದ್ದಲ್ಲಿ ಈ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರಿಗೆ ಸದರಿ ಆಸ್ತಿಯು ಗ್ರಾಮ ಠಾಣಾದ ಹೊರಗಡೆ ಬರುತ್ತಿರುವ ಬಗ್ಗೆ ಹಿಂಬರಹದ ಮೂಲಕ ತಿಳಿಸಲಾಗುತ್ತದೆ. ಈ ರೀತಿ ಗ್ರಾಮಠಾಣಾ ವ್ಯಾಪ್ತಿಯ ಸ್ವತ್ತುಗಳಿಗೆ ನಕ್ಷೆ ಕೋರಿ ಸ್ವೀಕೃತವಾಗುವ ಅರ್ಜಿಗಳನ್ನು ಮೋಜಿಣಿ ತಂತ್ರಾಂಶದ ಮುಖಾಂತರ ಆನ್.ಲೈನ್.ನಲ್ಲಿ ಸ್ವೀಕರಿಸುತ್ತಿದ್ದು, ಮೋಜಿಣಿ. ತಂತ್ರಾಂಶದ ಪ್ರತಿ ಹಂತದಲ್ಲಿಯೂ **FIFO** (ಸರದಿ ಸಾಲಿನಂತೆ) ಅಳವಡಿಸಲಾಗಿದೆ. ಅದರಂತೆ ಮೋಜಿಣಿ ತಂತ್ರಾಂಶದಲ್ಲಿ ಪ್ರಕರಣವನ್ನು ಅಳತೆಗಾಗಿ ಭೂಮಾಪಕರಿಗೆ ಆನ್.ಲೈನ್‌ನಲ್ಲಿ ವಿತರಿಸಲಾಗುತ್ತಿದ್ದು, ಪ್ರಕರಣದಲ್ಲಿ ಅಳತೆಯಾದ ನಂತರ ಭೂಮಾಪಕರು ಆನ್.ಲೈನ್‌ನಲ್ಲಿ ಕಡತಗಳನ್ನು ಅಪ್-ಲೋಡ್ ಮಾಡಲು ಹಾಗೂ ಅಪ್-ಲೋಡ್ ಮಾಡಿರುವ ಕಡತಗಳ ಪರಿಶೀಲನೆ ಮತ್ತು ಅನುಮೋದನೆಯನ್ನು ಸಹ ಆನ್.ಲೈನ್ ನಲ್ಲಿ ನಿರ್ವಹಿಸಲಾಗುತ್ತಿದೆ. ಮೋಜಿಣಿ ತಂತ್ರಾಂಶದ ಮುಖಾಂತರ ಪ್ರಕರಣಗಳನ್ನು ನಿರ್ವಹಿಸುತ್ತಿದ್ದು, ಯಾವುದೇ ಹಂತದಲ್ಲಿ ವಿಳಂಬಕ್ಕೆ ಅವಕಾಶವಿಲ್ಲದಂತೆ ಕ್ರಮವಹಿಸಲಾಗುತ್ತಿದೆ.
ಆ)	ಯಾವಾಗ ಅಳತೆ ಕಾರ್ಯವನ್ನು ಪೂರ್ಣಗೊಳಿಸಲಾಗುವುದು;	

ಇ)	ಸರ್ಕಾರವು ಮಾಡಿಕೊಂಡಿರುವ ಸಿದ್ಧತೆಗಳೇನು; ಎಷ್ಟು ಅನುದಾನ ಮೀಸಲಿರಿಸಿದೆ; ಎಷ್ಟು ಅನುದಾನ ವೆಚ್ಚ ಮಾಡಲಾಗಿದೆ? (ತಾಲ್ಲೂಕು ವಾರು ಮಾಹಿತಿ ನೀಡುವುದು)	**-: ರಾಜ್ಯದಲ್ಲಿಯ ಗ್ರಾಮ ಠಾಣಗಳ ಸರ್ವೆ ಕಾರ್ಯಕ್ಕಾಗಿ ಸರ್ಕಾರ ಮಾಡಿಕೊಂಡಿರುವ ಸಿದ್ಧತೆಗಳ ವಿವರ :-** ಕೇಂದ್ರ ಸರ್ಕಾರವು ದಿನಾಂಕ 24-4-2020 ರಂದು ರಾಜ್ಯದ ಗ್ರಾಮಗಳಲ್ಲಿನ ಜನವಸತಿ ಪ್ರದೇಶಗಳ ಆಸ್ತಿಗಳನ್ನು ಅಳತೆ ಮಾಡಿ, ಹಕ್ಕು ದಾಖಲೆ ವಿತರಿಸುವ ಉದ್ದೇಶದಿಂದ **"ಸ್ವಮಿತ್ವ"** ಯೋಜನೆಯನ್ನು ಜಾರಿಗೊಳಿಸಿರುತ್ತದೆ. ಈ ಯೋಜನೆಯಡಿ ಯಲ್ಲಿ ಭಾರತಿಯ ಸರ್ವೇಕ್ಷಣಾಲಯ ಸಂಸ್ಥೆಯವರು ಡ್ರೋನ್ ಮೂಲಕ ಜನ ವಸತಿ ಪ್ರದೇಶದ ಅಳತೆ ಮಾಡಿ, ಅದರಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಮನ್ವಯೊಂದಿಗೆ ಹಕ್ಕು ದಾಖಲೆಗಳನ್ನು ಸಿದ್ಧಪಡಿಸಿ ವಿತರಿಸಲಾಗುತ್ತದೆ. 2020-21 ನೇ ಸಾಲಿಗೆ ಕರ್ನಾಟಕ ರಾಜ್ಯದ 1950 ಗ್ರಾಮಗಳಲ್ಲಿ ಸ್ವಮಿತ್ವ ಯೋಜನೆಯನ್ನು ಅನುಷ್ಠಾನಗೊಳಿಸಲು ಗುರಿ ನಿಗದಿ ಪಡಿಸಿದ್ದು, ಪ್ರಥಮ ಹಂತದಲ್ಲಿ 16 ಜಿಲ್ಲೆಗಳಲ್ಲಿ ಸ್ವಮಿತ್ವ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. ಈ ರೀತಿಯಾಗಿ ರಾಜ್ಯದ ಉಳಿದ ಜಿಲ್ಲೆಗಳ ಎಲ್ಲಾ ಗ್ರಾಮಗಳಲ್ಲಿನ ಜನವಸತಿ ಪ್ರದೇಶಗಳನ್ನು ಈ ಯೋಜನೆಯಡಿ ಹಂತಹಂತವಾಗಿ ಆಯ್ಕೆ ಮಾಡಿಕೊಂಡು, ಅಳತೆ ಮಾಡಿ, ಹಕ್ಕು ದಾಖಲೆಗಳನ್ನು ಸಿದ್ಧಪಡಿಸಿ ವಿತರಿಸಲಾಗುತ್ತದೆ. ಈ ಯೋಜನೆಯನ್ನು ಕೇಂದ್ರ ಸರ್ಕಾರದ ಪ್ರಾಯೋಜಕತ್ವ ಮತ್ತು ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಮೇಲುಸ್ತುವಾರಿಯಲ್ಲಿ ಕೈಗೊಳ್ಳಲಾಗುತ್ತಿದ್ದು, ಈ ಯೋಜನೆಗಾಗಿ ರಾಜ್ಯ ಸರ್ಕಾರದಿಂದ ಯಾವುದೇ ಪ್ರತ್ಯೇಕ ಅನುದಾನವನ್ನು ಕಾಯ್ದಿರಿಸಿರುವುದಿಲ್ಲ.

<u>ಸಂಖ್ಯೆ: ಕಂಇ 19 ಎಸ್‌ಎಸ್‌ಸಿ 2021</u>

(ಸಹಿ)

(ಆರ್.ಅಶೋಕ)

ಕಂದಾಯ ಸಚಿವರು

<u>**ಕರ್ನಾಟಕ ಸರ್ಕಾರ**</u>

ಸಂ: ಮಮಇ 47 ಐಸಿಡಿ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 02.02.2021.

109 U/S 03/2/21

<u>**ಇವರಿಂದ:**</u>
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
<u>**ಬೆಂಗಳೂರು.**</u>

<u>**ಇವರಿಗೆ:**</u>
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭಾ ಸಚಿವಾಲಯ,
ವಿಧಾನಸೌಧ,
<u>**ಬೆಂಗಳೂರು.**</u>

ಮಾನ್ಯರೆ,

<u>**ವಿಷಯ:**</u> ಮಾನ್ಯ ವಿಧಾನಸಭಾ ಸದಸ್ಯರು ಶ್ರೀ **ನಿರಂಜನ್ ಕುಮಾರ್ ಸಿ.ಎಸ್,** ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:**728**ಕ್ಕೆ ಉತ್ತರಿಸುವ ಬಗ್ಗೆ.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ **ಶ್ರೀ ನಿರಂಜನ್ ಕುಮಾರ್ ಸಿ.ಎಸ್.,** ಇವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 728ಕ್ಕೆ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Padmini S.N 2/2
(ಪದ್ಮಿನಿ ಎಸ್ ಎನ್)
ಸರ್ಕಾರದ ಅಧೀನ ಕಾರ್ಯದರ್ಶಿ–1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	728
ಸದಸ್ಯರ ಹೆಸರು	:	ಶ್ರೀ ನಿರಂಜನ್ ಕುಮಾರ್ ಸಿ.ಎಸ್ (ಗುಂಡ್ಲುಪೇಟೆ)
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು
ಉತ್ತರಿಸಬೇಕಾದ ದಿನಾಂಕ	:	03-02-2021

ಕ್ರ ಸಂ	ಪ್ರಶ್ನೆ	ಉತ್ತರ
ಅ.	ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಅಂಗನವಾಡಿ ಕೇಂದ್ರಗಳೆಷ್ಟು; ಇದರಲ್ಲಿ ಎಷ್ಟು ಕೇಂದ್ರಗಳಲ್ಲಿ ಸ್ವಂತ ಕಟ್ಟಡವಿದೆ; ಎಷ್ಟು ಕೇಂದ್ರಗಳಿಗೆ ಸ್ವಂತ ಕಟ್ಟಡವಿರುವುದಿಲ್ಲ; (ಸಂಪೂರ್ಣ ವಿವರ ನೀಡುವುದು).	ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳು-298 1. ಸ್ವಂತ ಕಟ್ಟಡ ಇರುವ ಕೇಂದ್ರಗಳು-247 2. ಸ್ವಂತ ಕಟ್ಟಡ ಇಲ್ಲದಿರುವ ಕೇಂದ್ರಗಳು-51. ವಿವರವನ್ನು ಅನುಬಂಧ 1 & 2 ರಲ್ಲಿ ಒದಗಿಸಿದೆ.
ಆ.	ಈ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಶಿಥಿಲಾವಸ್ಥೆಯಲ್ಲಿರುವ ಅಂಗನವಾಡಿ ಕಟ್ಟಡಗಳೆಷ್ಟು; (ಗ್ರಾಮವಾರು ಸಂಪೂರ್ಣ ವಿವರ ನೀಡುವುದು).	ಈ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಶಿಥಿಲಾವಸ್ಥೆಯಲ್ಲಿರುವ ಅಂಗನವಾಡಿ ಕಟ್ಟಡಗಳ ಸಂಖ್ಯೆ:-17 ವಿವರವನ್ನು ಅನುಬಂಧ-3 ರಲ್ಲಿ ಒದಗಿಸಿದೆ.
ಇ.	ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳನ್ನು ಯಾವಾಗ ದುರಸ್ತಿಗೊಳಿಸಲಾಗುವುದು? (ವಿವರ ನೀಡುವುದು).	ಶಿಥಿಲಾವಸ್ಥೆಯಲ್ಲಿರುವ 17 ಅಂಗನವಾಡಿ ಕಟ್ಟಡಗಳು ದುರಸ್ಥಿ ಮಾಡಲು ಸಾಧ್ಯವಿಲ್ಲದ ಕಾರಣ ಇವುಗಳನ್ನು ಕೆಡವಿ ಹೊಸ ಕಟ್ಟಡ ನಿರ್ಮಿಸಬೇಕಾಗಿರುತ್ತದೆ.

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ,
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ :ಮಮಇ 47 ಐಸಿಡಿ 2021

ಕರ್ನಾಟಕ ಸರ್ಕಾರ

ಸಂ: ಮಮಇ 44 ಐಸಿಡಿ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 02.02.2021.

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬೆಂಗಳೂರು.

79
4/S
03/2/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭಾ ಸಚಿವಾಲಯ,
ವಿಧಾನಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನಸಭಾ ಸದಸ್ಯರು ಶ್ರೀಮತಿ ಲಕ್ಷ್ಮೀ ಆರ್. ಹೆಬ್ಬಾಳ್ಕರ್ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:669ಕ್ಕೆ ಉತ್ತರಿಸುವ ಬಗ್ಗೆ.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ **ಶ್ರೀಮತಿ ಲಕ್ಷ್ಮೀ ಆರ್. ಹೆಬ್ಬಾಳ್ಕರ್** ಇವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 669ಕ್ಕೆ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Padmini S.N
2/2

(ಪದ್ಮಿನಿ ಎಸ್ ಎನ್)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	669
ಸದಸ್ಯರ ಹೆಸರು	:	ಶ್ರೀಮತಿ ಲಕ್ಷ್ಮಿ ಆರ್. ಹೆಬ್ಬಾಳ್ಕರ್ (ಬೆಳಗಾಂ ಗ್ರಾಮಾಂತರ)
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
ಉತ್ತರಿಸಬೇಕಾದ ದಿನಾಂಕ	:	03/02/2021

ಕ್ರ ಸಂ.	ಪ್ರಶ್ನೆ	ಉತ್ತರ
ಅ.	ರಾಜ್ಯದ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಬಾಣಂತಿಯರ ಪೌಷ್ಠಿಕತೆಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;	1) ಗರ್ಭಿಣಿಯರಿಗೆ ಮತ್ತು ಬಾಣಂತಿಯರಲ್ಲಿನ ಅಪೌಷ್ಠಿಕತೆಯನ್ನು ಹೋಗಲಾಡಿಸಲು ಅಂಗನವಾಡಿ ಕೇಂದ್ರಗಳಲ್ಲಿಯೇ ಮಧ್ಯಾಹ್ನದ ಬಿಸಿಯೂಟ ನೀಡುವ ಮಾತೃಪೂರ್ಣ ಯೋಜನೆಯನ್ನು ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗಿದೆ. ಈ ಯೋಜನೆಯಡಿ ಪ್ರತಿ ತಿಂಗಳು ನಿಯಮಿತವಾಗಿ ಗರ್ಭಿಣಿ ಮತ್ತು ಬಾಣಂತಿಯರ ಆರೋಗ್ಯ ತಪಾಸಣೆಯನ್ನು ಮಾಡಲಾಗುತ್ತಿದ್ದು, ತೂಕವನ್ನು ಅಳತೆ ಮಾಡಲಾಗುತ್ತಿದೆ. ಪೌಷ್ಠಿಕ ಆಹಾರ ಸೇವನೆ ಮತ್ತು ಆರೋಗ್ಯ ಪಾಲನೆ ಕುರಿತಂತೆ ಸಮಾಲೋಚನಾ ಸಭೆಗಳನ್ನು ಅಂಗನವಾಡಿ ಕೇಂದ್ರಗಳಲ್ಲಿ ನಡೆಸಲಾಗುತ್ತಿದೆ. ಫೋಲಿಕ್ ಆಸಿಡ್ ಮತ್ತು ಕ್ಯಾಲ್ಷಿಯಂ ಮಾತ್ರೆಗಳನ್ನು ಆರೋಗ್ಯ ಇಲಾಖೆಯ ವತಿಯಿಂದ ಅಂಗನವಾಡಿ ಕೇಂದ್ರಗಳಲ್ಲಿಯೇ ವಿತರಿಸಲಾಗುತ್ತಿದೆ. ಪ್ರಸ್ತುತ ಕೋವಿಡ್-19 ಸಾಂಕ್ರಾಮಿಕದ ಪ್ರಯುಕ್ತ ಅಂಗನವಾಡಿ ಕೇಂದ್ರಗಳು ಮುಚ್ಚಿರುವುದರಿಂದ ಗರ್ಭಿಣಿ ಮತ್ತು ಬಾಣಂತಿಯರ ಮನೆ ಬಾಗಿಲಿಗೆ ಪೂರಕ ಪೌಷ್ಠಿಕ ಆಹಾರವನ್ನು ವಿತರಿಸಲಾಗುತ್ತಿದೆ. 2) ಗರ್ಭಿಣಿ ಮತ್ತು ಬಾಣಂತಿಯರಿಗೆ ಪೂರಕ ಪೌಷ್ಠಿಕ ಅಹಾರಗಳಾದ ಹಣ್ಣು ತರಕಾರಿ ಇನ್ನಿತರ ಪೌಷ್ಠಿಕ ಆಹಾರ ಸೇವನೆಯ ಉದ್ದೇಶಕ್ಕಾಗಿ ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆಯಡಿಯಲ್ಲಿ ರೂ.5000/-ಗಳನ್ನು ನೀಡುವ ಯೋಜನೆ ಜಾರಿಗೊಳಿಸಲಾಗಿದೆ. 3) ಅಪೌಷ್ಠಿಕತೆ ತಡೆಗಟ್ಟಲು ಕೇಂದ್ರ ಮತ್ತು ರಾಜ್ಯ ಸಹಭಾಗಿತ್ವದಲ್ಲಿ ಪೋಷಣ್ ಅಭಿಯಾನ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಅಪೌಷ್ಠಿಕತೆಗೆ ಸಾಮಾಜಿಕ, ಶೈಕ್ಷಣಿಕ, ಕೌಟುಂಬಿಕ, ಅನುವಂಶಿಕ ಇನ್ನಿತರ ಕಾರಣಗಳು ಸಹ ಇರಬಹುದಾಗಿದ್ದು ಈ ನಿಟ್ಟಿನಲ್ಲಿ ಕುಟುಂಬದ ಎಲ್ಲಾ ಸದಸ್ಯರಿಗೂ / ಸಮುದಾಯದವರಿಗೂ ಸಹ ಅಪೌಷ್ಠಿಕತೆ ಕುರಿತಂತೆ ಮತ್ತು ನಿವಾರಣಾ ಮಾರ್ಗೋಪಾಯಗಳ ಕುರಿತಂತೆ ತಿಳುವಳಿಕೆ ನೀಡಲು ಪೋಷಣ್ ಅಭಿಯಾನ

		ಯೋಜನೆಯಡಿಯಲ್ಲಿ ಸಮುದಾಯ ಆಧಾರಿತ ಚಟುವಟಿಕೆಗಳನ್ನು / ಜನಾಂದೋಲನ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.
ಆ.	ಬಾಣಂತಿಯರಿಗೆ ಸಂಬಂಧಿಸಿದ ಸರ್ಕಾರಿ ಯೋಜನೆಗಳು ಯಾವುವು; (ಸಂಪೂರ್ಣ ವಿವರವನ್ನು ನೀಡುವುದು.)	• **ಮಾತೃಪೂರ್ಣ ಯೋಜನೆ** : ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗುವ ಗರ್ಭಿಣಿ ಮತ್ತು ಬಾಣಂತಿಯರಿಗೆ ಅಂಗನವಾಡಿ ಕೇಂದ್ರಗಳಲ್ಲೇ ಮಧ್ಯಾಹ್ನದ ಬಿಸಿಯೂಟ ನೀಡುವ ಯೋಜನೆ ಇದಾಗಿದೆ. • **ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ :** ಈ ಯೋಜನೆಯಡಿಯಲ್ಲಿ ಗರ್ಭಿಣಿ ಮತ್ತು ಬಾಣಂತಿಯರಿಗೆ ರೂ. 5000/-ಗಳ ಸಹಾಯ ಧನವನ್ನು ಮೂರು ಕಂತುಗಳಲ್ಲಿ ನೇರ ನಗದು ವರ್ಗಾವಣೆ ಮೂಲಕ ಫಲಾನುಭವಿಯ ಖಾತೆಗೆ ವರ್ಗಾಯಿಸಲಾಗುವುದು. • **ಪೋಷಣ್ ಅಭಿಯಾನ್ :** ಅಪೌಷ್ಠಿಕತೆ ತಡೆಗಟ್ಟಲು ಕೇಂದ್ರ ಮತ್ತು ರಾಜ್ಯ ಸಹಭಾಗಿತ್ವದಲ್ಲಿ ಪೋಷಣ್ ಅಭಿಯಾನ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಪೋಷಣ್ ಅಭಿಯಾನ ಯೋಜನೆಯಡಿಯಲ್ಲಿ ಅಂಗನವಾಡಿ ಕೇಂದ್ರಗಳ ಎಲ್ಲಾ ಫಲಾನುಭವಿಗಳ ಅಪೌಷ್ಠಿಕತೆಯನ್ನು ನಿವಾರಿಸಲು ಸಮುದಾಯ ಆಧಾರಿತ ಚಟುವಟಿಕೆಗಳನ್ನು / ಜನಾಂದೋಲನ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.
ಇ.	ಬಾಣಂತಿಯರಿಗೆ ಸರ್ಕಾರ ನೀಡುತ್ತಿರುವ ಸಹಾಯಧನವೆಷ್ಟು ?	ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆಯಡಿಯಲ್ಲಿ ಗರ್ಭಿಣಿ / ಬಾಣಂತಿ ಮಹಿಳೆಯರಿಗೆ ರೂ. 5000/-ಗಳ ಸಹಾಯಧನವನ್ನು ಮೂರು ಕಂತುಗಳಲ್ಲಿ ನೇರ ನಗದು ವರ್ಗಾವಣೆ ಮೂಲಕ ಫಲಾನುಭವಿಯ ಖಾತೆಗೆ ವರ್ಗಾಯಿಸಲಾಗುವುದು.

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ,
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ: ಮಮಇ 44 ಐಸಿಡಿ 2021

ಕರ್ನಾಟಕ ಸರ್ಕಾರ

ಸಂ: ಮಮಇ 42 ಐಸಿಡಿ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 02.02.2021.

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬೆಂಗಳೂರು.

118
4/5
03/02/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭಾ ಸಚಿವಾಲಯ,
ವಿಧಾನಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನಸಭಾ ಸದಸ್ಯರು **ಶ್ರೀಮತಿ ಪ್ರಿಯಾಂಕ ಎಂ. ಖರ್ಗೆ** ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:709ಕ್ಕೆ ಉತ್ತರಿಸುವ ಬಗ್ಗೆ.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ **ಶ್ರೀಮತಿ ಪ್ರಿಯಾಂಕ ಎಂ. ಖರ್ಗೆ** ಇವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 709ಕ್ಕೆ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Padmini S.N 2/2

(ಪದ್ಮಿನಿ ಎಸ್ ಎನ್)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	709
ಸದಸ್ಯರ ಹೆಸರು	:	ಶ್ರೀ ಪ್ರಿಯಾಂಕ್ ಎಂ. ಖರ್ಗೆ (ಚಿತ್ತಾಪುರ)
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು
ಉತ್ತರಿಸಬೇಕಾದ ದಿನಾಂಕ	:	03-02-2021

ಕ್ರ ಸಂ	ಪ್ರಶ್ನೆ	ಉತ್ತರ
ಅ.	2019-20ನೇ ಸಾಲಿನ ಚಿತ್ತಾಪೂರ ಮತಕ್ಷೇತ್ರದಡಿಯಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳು ಕಾರ್ಯನಿರತವಾಗಿವೆ; ಸ್ವಂತ ಮತ್ತು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಸುತ್ತಿರುವ ಅಂಗನವಾಡಿ ಸಂಖ್ಯೆಗಳೆಷ್ಟು; (ವಿವರ ನೀಡುವುದು).	2019-20ನೇ ಸಾಲಿನಲ್ಲಿ ಚಿತ್ತಾಪೂರ ಮತಕ್ಷೇತ್ರದಡಿಯಲ್ಲಿ ಒಟ್ಟು 355 ಅಂಗನವಾಡಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ. ಇವುಗಳಲ್ಲಿ 247 ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡಗಳಲ್ಲಿ, 94 ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿವೆ. (ವಿವರವನ್ನು ಅನುಬಂಧದಲ್ಲಿ ಒದಗಿಸಲಾಗಿದೆ)
ಆ.	ಚಿತ್ತಾಪೂರ ಮತಕ್ಷೇತ್ರದಡಿಯಲ್ಲಿ ಹೊಸ ಅಂಗನವಾಡಿ ಕೇಂದ್ರಗಳ ಮಂಜೂರಾತಿಗಾಗಿ ಬೇಡಿಕೆ ಇರುವುದು ನಿಜವೇ; ಬೇಡಿಕೆ ಇದ್ದಲ್ಲಿ, ಹೊಸ ಅಂಗನವಾಡಿ ನಿರ್ಮಿಸಲು ಸರ್ಕಾರ ಯಾವಾಗ ಅನುದಾನ ಬಿಡುಗಡೆ ಮಾಡುತ್ತದೆ?	ಹೌದು. ಚಿತ್ತಾಪೂರ ಮತಕ್ಷೇತ್ರದಡಿಯಲ್ಲಿ ಹೊಸ 08 ಅಂಗನವಾಡಿ ಕೇಂದ್ರಗಳ ಮಂಜೂರಾತಿಗಾಗಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಕೇಂದ್ರ ಸರ್ಕಾರದ ಮಂಜೂರಾತಿ ದೊರೆತ ನಂತರ ನಿವೇಶನ ಮತ್ತು ಅನುದಾನ ಲಭ್ಯತೆಗನುಗುಣವಾಗಿ ಅಂಗನವಾಡಿ ಕಟ್ಟಡ ನಿರ್ಮಿಸಲು ಕ್ರಮಕೈಗೊಳ್ಳಲಾಗುವುದು.

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ,
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ: ಮಮಇ 42 ಐಸಿಡಿ 2021

<u>ಕರ್ನಾಟಕ ಸರ್ಕಾರ</u>

ಸಂ: ಮಮಇ 36 ಐಸಿಡಿ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 02.02.2021.

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬೆಂಗಳೂರು.

162
5/2/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭಾ ಸಚಿವಾಲಯ,
ವಿಧಾನಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನಸಭಾ ಸದಸ್ಯರು ಶ್ರೀ ಸುಬ್ಬಾರೆಡ್ಡಿ ಎಸ್. ಎನ್. ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:570ಕ್ಕೆ ಉತ್ತರಿಸುವ ಬಗ್ಗೆ.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ **ಶ್ರೀ ಸುಬ್ಬಾರೆಡ್ಡಿ ಎಸ್. ಎನ್.,** ಇವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 570ಕ್ಕೆ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Padmini S.N

(ಪದ್ಮಿನಿ ಎಸ್ ಎನ್)
ಸರ್ಕಾರದ ಅಧೀನ ಕಾರ್ಯದರ್ಶಿ–1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	570
ಸದಸ್ಯರ ಹೆಸರು	:	ಶ್ರೀ ಸುಬ್ಬಾರೆಡ್ಡಿ ಎಸ್.ಎನ್. (ಬಾಗೇಪಲ್ಲಿ)
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
ಉತ್ತರಿಸಬೇಕಾದ ದಿನಾಂಕ	:	03/02/2021

ಕ್ರ ಸಂ.	ಪ್ರಶ್ನೆ	ಉತ್ತರ
ಅ.	ಮಕ್ಕಳ ಸಂಖ್ಯೆ ಕಡಿಮೆ ಇರುವ ಸ್ಥಳದಲ್ಲಿ ಅಂಗನವಾಡಿ ಕೇಂದ್ರಗಳನ್ನು ಬೇರೆಡೆಗೆ ಸ್ಥಳಾಂತರ ಮಾಡಲು ಇರುವ ಮಾನದಂಡಗಳೇನು;	ಮಕ್ಕಳ ಸಂಖ್ಯೆ ಕಡಿಮೆ ಇರುವ ಸ್ಥಳದಿಂದ ಅಂಗನವಾಡಿ ಕೇಂದ್ರಗಳನ್ನು ಬೇರೆಡೆಗೆ ಸ್ಥಳಾಂತರ ಮಾಡಲು ಕೇಂದ್ರ ಸರ್ಕಾರದ ಈ ಕೆಳಕಂಡ ಮಾನದಂಡಗಳನ್ನು ಪಾಲಿಸಬೇಕಾಗಿರುತ್ತದೆ. 1. ಅಂಗನವಾಡಿ ಕೇಂದ್ರವನ್ನು ಸ್ಥಳಾಂತರ ಮಾಡುವಾಗ ಆ ಕೇಂದ್ರದ ಅಂಗನವಾಡಿ ಕಾರ್ಯಕರ್ತೆಯು ಕೇಂದ್ರವನ್ನು ತಲುಪಲು ಪ್ರಯಾಣಿಸುವ ದೂರ ನಗರ ಪ್ರದೇಶದಲ್ಲಿ 5 ಕಿಮೀ, ಗ್ರಾಮೀಣ ಪ್ರದೇಶದಲ್ಲಿ 3 ಕಿಮೀ ಹಾಗೂ ಗುಡ್ಡಗಾಡು ಪ್ರದೇಶದಲ್ಲಿ 1.5 ಕಿಮೀ ಗಿಂತ ಹೆಚ್ಚಿಗೆ ಇರಬಾರದು. 2. ಸ್ಥಳಾಂತರ ಮಾಡುವಾಗ ಸೂಕ್ತವಾದ ಕಟ್ಟಡ, ನೀರಿನ ಸೌಲಭ್ಯ ಇರುವ ಬಗ್ಗೆ, ಗರ್ಭಿಣಿ ಹಾಗೂ ಚಿಕ್ಕ ಮಕ್ಕಳು ಕೇಂದ್ರವನ್ನು ಸುಲಭವಾಗಿ ತಲಪುವಂತೆ ಇರಬೇಕು. 3. ಸ್ಥಳಾಂತರ ಮಾಡಿದಾಗ ಮಂಜೂರಾಗಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆಯನ್ನು ಮೀರಬಾರದು.
ಆ.	ಮಕ್ಕಳ ಸಂಖ್ಯೆ ಕಡಿಮೆ ಇರುವ ಅಂಗನವಾಡಿಗಳನ್ನು ಬೇರೆಡೆಗೆ ಸ್ಥಳಾಂತರ ಮಾಡಲು ಜಿಲ್ಲಾ ಮಟ್ಟದ ಸಮಿತಿಗೆ ಅವಕಾಶವಿದೆಯೇ;	ಮಕ್ಕಳ ಸಂಖ್ಯೆ ಕಡಿಮೆ ಇರುವ ಅಂಗನವಾಡಿಗಳನ್ನು ಬೇರೆಡೆಗೆ ಸ್ಥಳಾಂತರ ಮಾಡಲು ಜಿಲ್ಲಾ ಮಟ್ಟದ ಸಮಿತಿಗೆ ಅವಕಾಶವಿರುವುದಿಲ್ಲ.
ಇ.	ಪ್ರಸ್ತುತ ಅಂಗನವಾಡಿ ಕೇಂದ್ರವನ್ನು ಸ್ಥಳಾಂತರ ಮಾಡಲು ಯಾವ ಹಂತದ ಅಧಿಕಾರಿಗೆ ಅಧಿಕಾರವಿರುತ್ತದೆ? (ವಿವರ ನೀಡುವುದು.)	ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಹಾಗೂ ಜಿಲ್ಲಾ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪ ನಿರ್ದೇಶಕರು ಕಡಿಮೆ ಫಲಾನುಭವಿಗಳನ್ನು ಹೊಂದಿರುವ ಅಂಗನವಾಡಿ ಕೇಂದ್ರಗಳನ್ನು ಗುರುತಿಸುವರು. ಸರ್ಕಾರದ ಅನುಮೋದನೆಯೊಂದಿಗೆ ಅಂತಹ ಅಂಗನವಾಡಿ ಕೇಂದ್ರಗಳನ್ನು ಸ್ಥಳಾಂತರಗೊಳಿಸಲಾಗುತ್ತದೆ.

ಸಂಖ್ಯೆ: ಮಮಇ 36 ಐಸಿಡಿ 2021

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ,
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು

ಕರ್ನಾಟಕ ಸರಕಾರ
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ (ಮಹಾತ್ಮಗಾಂಧಿ ನರೇಗಾ ಯೋಜನೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
3ನೇ ಹಂತ, 2ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001.
ದೂರವಾಣಿ ಸಂಖ್ಯೆ: 080-22372738, ಈ-ಮೇಲ್ : karnregs@gmail.com

ದಿನಾಂಕ: 02-02-2021.

ಸಂಖ್ಯೆ ಗ್ರಾಅಪ 38(296) ಉಖಾಯೋ 2019

ಇಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

84
9/5
03/2/21

ಇವರಿಗೆ:
ಕಾರ್ಯದರ್ಶಿಗಳು
ಕರ್ನಾಟಕ ವಿಧಾನ ಸಭೆ
ವಿಧಾನಸೌಧ, ಬೆಂಗಳೂರು

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಲಿಂಗೇಶ್ ಕೆ. ಎಸ್ (ಬೇಲೂರು) ರವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 653ಕ್ಕೆ ಉತ್ತರ ಕಳುಹಿಸುವ ಬಗ್ಗೆ.

ಉಲ್ಲೇಖ: ತಮ್ಮ ಕಛೇರಿಯ ಪತ್ರ ಸಂಖ್ಯೆ: ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.653/2021, ದಿನಾಂಕ: 23-01-2021.

ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಶ್ರೀ ಲಿಂಗೇಶ್ ಕೆ. ಎಸ್ (ಬೇಲೂರು) ರವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 653ರ ಉತ್ತರದ 35 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

ತಮ್ಮ ವಿಶ್ವಾಸಿ,

ಸಹಾಯಕ ನಿರ್ದೇಶಕರು (ಆಡಳಿತ)
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಪ್ರತಿ ಮಾಹಿತಿಗಾಗಿ:
ಸರ್ಕಾರದ ಅಧೀನ ಕಾರ್ಯದರ್ಶಿ (ಸಮನ್ವಯ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
(ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 653ರ ಉತ್ತರದ 3 ಪ್ರತಿಗಳೊಂದಿಗೆ ಕಳುಹಿಸಿದೆ)

ಕರ್ನಾಟಕ ವಿಧಾನ ಸಭೆ

1. ಸದಸ್ಯರ ಹೆಸರು : ಶ್ರೀ ಲಿಂಗೇಶ್ ಕೆ. ಎಸ್. (ಬೇಲೂರು)
2. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 653
3. ಉತ್ತರಿಸಬೇಕಾದ ದಿನಾಂಕ : 03-02-2021

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಗ್ರಾಮೀಣ ಭಾಗದಲ್ಲಿ ನರೇಗಾ ಯೋಜನೆಯಡಿಯಲ್ಲಿ ಸಿ.ಸಿ ರಸ್ತೆ ನಿರ್ಮಾಣ ಮಾಡಲು ಯಾವಾಗ ಅನುಮತಿ ನೀಡಲಾಗುವುದು;	"ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಕರ್ನಾಟಕ" 2007 ರ ಪ್ರಕರಣ 12ರನ್ವಯ ವಾರ್ಷಿಕ ಕ್ರಿಯಾ ಯೋಜನೆಯ ಒಟ್ಟು ಅಂದಾಜು ವೆಚ್ಚದ ಶೇ. 10 ರಷ್ಟನ್ನು ಮೀರದಂತೆ ರಸ್ತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಅವಕಾಶವಿರುತ್ತದೆ.
ಆ)	ಬೇಲೂರು ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಗ್ರಾಮೀಣ ರಸ್ತೆಗಳು ಇತ್ತೀಚಿನ ಮಳೆಯಿಂದ ತುಂಬಾ ಹದಗೆಟ್ಟಿದ್ದು, ಸಾರ್ವಜನಿಕರ ಸಂಚಾರಕ್ಕೆ ತುಂಬಾ ತಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬೇಲೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಗ್ರಾಮೀಣ ರಸ್ತೆಗಳು ಆಗಸ್ಟ್ ಮಾಹೆಯಲ್ಲಿ ಬಿದ್ದ ಮಳೆಯಿಂದ ಹಾನಿಯಾಗಿರುವ ಸಂಬಂಧ 40 ಕಾಮಗಾರಿಗಳ (85.5 ಕಿ.ಮೀಗಳ ರಸ್ತೆ ಉದ್ದ) ಅಂದಾಜು ಮೊತ್ತ ರೂ. 161.70 ಲಕ್ಷಗಳ ಕ್ರಿಯಾ ಯೋಜನೆಯನ್ನು ಹಾಗೂ ಸೆಪ್ಟೆಂಬರ್ ಮಾಹೆಯಲ್ಲಿ ಬಿದ್ದ ಮಳೆಯಿಂದ ಹಾನಿಯಾಗಿರುವ ಸಂಬಂಧ 1 ಕಾಮಗಾರಿಗಳ (1 ಕಿ.ಮೀ ರಸ್ತೆ ಉದ್ದ) ಅಂದಾಜು ಮೊತ್ತ ರೂ. 1.00 ಲಕ್ಷಗಳ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಲಾಗಿದೆ.
ಇ)	ಬಂದಿದ್ದಲ್ಲಿ, ಸದರಿ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಪ್ರಸಕ್ತ ಸಾಲಿನಲ್ಲಿ ಅನುದಾನ ಮಂಜೂರು ಮಾಡಲಾಗುವುದೇ; ಇಲ್ಲವಾದಲ್ಲಿ, ಯಾವಾಗ ಎಷ್ಟು ಅನುದಾನ ಮಂಜೂರು ಮಾಡಲಾಗುವುದು (ಸಂಪೂರ್ಣ ವಿವರ ನೀಡುವುದು)?	ಅನ್ವಯಿಸುವುದಿಲ್ಲ.

ಸಂಖ್ಯೆ: ಗ್ರಾಅಪ 38(296) ಉಖಾಯೋ 2019

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರಕಾರ
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ (ಮಹಾತ್ಮಗಾಂಧಿ ನರೇಗಾ ಯೋಜನೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
3ನೇ ಹಂತ, 2ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001.
ದೂರವಾಣಿ ಸಂಖ್ಯೆ: 080-22372738, ಈ-ಮೇಲ್ : karnregs@gmail.com

ಸಂಖ್ಯೆ ಗ್ರಾಅಪ 38(296) ಉಖಾಯೋ 2019

ದಿನಾಂಕ: 02-02-2021.

ಇಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:
ಕಾರ್ಯದರ್ಶಿಗಳು
ಕರ್ನಾಟಕ ವಿಧಾನ ಸಭೆ
ವಿಧಾನಸೌಧ, ಬೆಂಗಳೂರು

H9
u/s
03/2/21

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ದಿನೇಶ್ ಗುಂಡೂರಾವ್ (ಗಾಂಧೀನಗರ) ರವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 699ಕ್ಕೆ ಉತ್ತರ ಕಳುಹಿಸುವ ಬಗ್ಗೆ.

ಉಲ್ಲೇಖ: ತಮ್ಮ ಕಛೇರಿಯ ಪತ್ರ ಸಂಖ್ಯೆ: ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.699/2021, ದಿನಾಂಕ: 27-01-2021.

ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ದಿನೇಶ್ ಗುಂಡೂರಾವ್ (ಗಾಂಧೀನಗರ) ರವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 699ರ ಉತ್ತರದ 35 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

ತಮ್ಮ ವಿಶ್ವಾಸಿ,

ಸಹಾಯಕ ನಿರ್ದೇಶಕರು (ಆಡಳಿತ)
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಪ್ರತಿ ಮಾಹಿತಿಗಾಗಿ:
ಸರ್ಕಾರದ ಅಧೀನ ಕಾರ್ಯದರ್ಶಿ (ಸಮನ್ವಯ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
(ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 699ರ ಉತ್ತರದ 3 ಪ್ರತಿಗಳೊಂದಿಗೆ ಕಳುಹಿಸಿದೆ)

ಕರ್ನಾಟಕ ವಿಧಾನ ಸಭೆ

1. ಸದಸ್ಯರ ಹೆಸರು : ಶ್ರೀ ದಿನೇಶ್ ಗುಂಡೂರಾವ್ (ಗಾಂಧೀನಗರ)
2. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 699
3. ಉತ್ತರಿಸಬೇಕಾದ ದಿನಾಂಕ : 03-02-2021

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕಳೆದ ಮೂರು ವರ್ಷಗಳಿಂದ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ನರೇಗಾ ಯೋಜನೆಗೆ ಸಂಬಂಧಿಸಿದಂತೆ ಬಿಡುಗಡೆ ಮಾಡಬೇಕಾದ ಅನುದಾನವೆಷ್ಟು; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)	ಕಳೆದ 3 ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡಲು ಬಾಕಿ ಇರುವ ಅನುದಾನದ ವಿವರ. (see table below)
ಆ)	ಬಾಕಿ ಅನುದಾನ ಪಡೆಯಲು ರಾಜ್ಯ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ವಿವರ ನೀಡುವುದು)	ಕೇಂದ್ರ ಸರ್ಕಾರವು ಅನುದಾನವನ್ನು ಕಾಲಕಾಲಕ್ಕೆ ಬಿಡುಗಡೆ ಮಾಡುತ್ತಿದೆ. ಆದರೆ ಕೆಲವು ಸಂದರ್ಭಗಳಲ್ಲಿ ಅನುದಾನ ಬಿಡುಗಡೆಯಲ್ಲಿ ತಾತ್ಕಾಲಿಕ ವಿಳಂಬವಾಗಿರುತ್ತದೆ. ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದಿಂದ ನಿರಂತರವಾಗಿ ಕೇಂದ್ರ ಸರ್ಕಾರಕ್ಕೆ ಹಣಬಳಕೆ ಪ್ರಮಾಣ ಪತ್ರ ಮತ್ತು ಅನುದಾನ ಕೋರಿಕೆ ಪ್ರಸ್ತಾವನೆಯನ್ನು ಸಲ್ಲಿಸಿ ಅನುದಾನ ಬಿಡುಗಡೆಗೆ ಕ್ರಮವಹಿಸಲಾಗುತ್ತಿದೆ.

ಕ್ರ. ಸಂ	ವರ್ಷ	ಸಾಮಗ್ರಿ (ರೂ. ಲಕ್ಷಗಳಲ್ಲಿ)	ಕೂಲಿ (ರೂ. ಲಕ್ಷಗಳಲ್ಲಿ)
1	2018-19	9431.43	1813.45
2	2019-20	15489.98	713.15
3	2020-21	5727.37	22865.90
ಒಟ್ಟು		30648.78	25392.5

ಸಂಖ್ಯೆ: ಗ್ರಾಅಪ 38(297) ಉಖಾಯೋ 2019

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂ: ಟಿಡಿ 24 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:02.02.2021.

81
U/S
3/2/21

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಲಿಂಗೇಶ್ ಕೆ.ಎಸ್., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 650 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಲಿಂಗೇಶ್ ಕೆ.ಎಸ್., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 650 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,
Mala S 02/02/2021
(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 650

ಸದಸ್ಯರ ಹೆಸರು : ಶ್ರೀ ಲಿಂಗೇಶ ಕೆ.ಎಸ್. (ಬೇಲೂರು)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 03-02-2021

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಹಾಸನ ಜಿಲ್ಲೆಯ ತಾಲ್ಲೂಕುಗಳಿಂದ ಹಾಗೂ ಗ್ರಾಮೀಣ ಪ್ರದೇಶಗಳಿಂದ ಪ್ರತಿ ದಿನ ಸಾವಿರಾರು ಹೆಣ್ಣು ಮಕ್ಕಳು ಹಾಸನ ನಗರದಲ್ಲಿರುವ ಗಾರ್ಮೆಂಟ್ ಹಾಗೂ ಇತರೆ ಕಾರ್ಖಾನೆಗಳಲ್ಲಿ ಕೆಲಸ ನಿರ್ವಹಿಸಲು ಬಂದು ಹೋಗುತ್ತಿದ್ದು, ಅವರಿಗೆ ಸರ್ಕಾರದ ಸಾರಿಗೆ ಬಸ್ ವ್ಯವಸ್ಥೆ ಇಲ್ಲದ ಕಾರಣ ಖಾಸಗಿ ಟೆಂಪೋ, ಆಟೋ ರಿಕ್ಷಾ ಹಾಗೂ ಇತರೆ ವಾಹನಗಳಲ್ಲಿ ಸಂಚರಿಸುತ್ತಿದ್ದು, ಸೂಕ್ತ ಸಂಚಾರ ಸುರಕ್ಷತೆ ಇಲ್ಲದ ಕಾರಣ ಹೆಣ್ಣು ಮಕ್ಕಳಿಗೆ ತೊಂದರೆಯಾಗುತ್ತಿರುವುದು ಹಾಗೂ ವಾಹನಗಳು ಅಪಘಾತಕ್ಕೀಡಾಗಿ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹಾಸನ ನಗರವು ವಾಣಿಜ್ಯ ಕೇಂದ್ರವಾಗಿದ್ದು, ನಗರದ ದಾಸರಕೊಪ್ಪಲು-ಎಂ.ಸಿ.ಇ-ಸಾಲಗಾಮೆ ಗೇಟ್-ನಗರ ಸಾರಿಗೆ ಬಸ್ ನಿಲ್ದಾಣ-ಎನ್.ಆರ್.ವೃತ್ತ-ಹೊಸ ಬಸ್ ನಿಲ್ದಾಣ-ಚನ್ನಪಟ್ಟಣ-ಹೊಸಕೊಪ್ಪಲು-ಕೆ.ಐ.ಎ.ಡಿ.ಬಿ ಮಾರ್ಗದಲ್ಲಿ ಹೆಚ್ಚಿನ ಸಂಖ್ಯೆಯ ಕಾರ್ಮಿಕರು ಪ್ರಯಾಣಿಸುತ್ತಿರುವುದರಿಂದ, ಹಾಸನ ನಗರ ವ್ಯಾಪ್ತಿಯಲ್ಲಿ ಗಾರ್ಮೆಂಟ್ಸ್ ಮತ್ತು ಇತರೆ ಕಾರ್ಮಿಕರ ಅನುಕೂಲಕ್ಕಾಗಿ 3 ಅನುಸೂಚಿಗಳಿಂದ 6 ಪ್ರತ್ಯೇಕ ಸುತ್ತುವಳಿಗಳು ಒಳಗೊಂಡಂತೆ ಒಟ್ಟು 32 ಅನುಸೂಚಿಗಳಿಂದ 556 ಸುತ್ತುವಳಿಗಳ ನಗರ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ. ಅಲ್ಲದೆ, ಹಾಸನ-ಹೊಳೆನರಸೀಪುರ ಮಾರ್ಗದಲ್ಲಿ ಕೆ.ಐ.ಎ.ಡಿ.ಬಿ ವೃತ್ತದ ಮಾರ್ಗವಾಗಿ ಪ್ರತಿನಿತ್ಯ 68 ಸುತ್ತುವಳಿಗಳನ್ನು ಕಾರ್ಯಾಚರಿಸಲಾಗುತ್ತಿದೆ. ಮುಂದುವರೆದು, ಹಾಸನ ಜಿಲ್ಲೆಯ ತಾಲ್ಲೂಕು ಕೇಂದ್ರ ಮತ್ತು ಗ್ರಾಮಾಂತರ ಪ್ರದೇಶಗಳಿಂದ ಹಾಸನ ನಗರಕ್ಕೆ 934 ಸುತ್ತುವಳಿಗಳಲ್ಲಿ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ. ಸದರಿ ಸಾರಿಗೆಗಳ ಅನುಕೂಲವನ್ನು ಹಾಸನ ಜಿಲ್ಲೆ ಸುತ್ತಮುತ್ತಲಿನ ತಾಲ್ಲೂಕು ಹಾಗೂ ಗ್ರಾಮಾಂತರ ಪ್ರದೇಶಗಳಿಂದ ಹಾಸನ ನಗರಕ್ಕೆ ಬರುವ ಗಾರ್ಮೆಂಟ್ ಹಾಗೂ ಇತರೆ ಕಾರ್ಖಾನೆಗಳಲ್ಲಿ ಕೆಲಸ ನಿರ್ವಹಿಸುವ ಮಹಿಳೆಯರು ಸೇರಿದಂತೆ, ಸಾರ್ವಜನಿಕ ಪ್ರಯಾಣಿಕರು, ವಿದ್ಯಾರ್ಥಿಗಳು, ನೌಕರರು ಹಾಗೂ ರೈತರು ಪಡೆದುಕೊಳ್ಳುತ್ತಿದ್ದು, ಇದು ಅವಶ್ಯಕತೆಗೆ ಅನುಗುಣವಾಗಿದೆ. ಪ್ರಸ್ತುತ ಕೋವಿಡ್-19ರ ಹಿನ್ನೆಲೆಯಲ್ಲಿ ವಿರಳ ಜನಸಂದಣಿ ಇರುವುದರಿಂದ ಹಾಗೂ ಇನ್ನೂ ಹಲವಾರು ಶಾಲೆಗಳು ಪ್ರಾರಂಭವಾಗದಿರುವುದರಿಂದ, ಪ್ರಯಾಣಿಕರ ಲಭ್ಯತೆಗೆ ಮತ್ತು ಅವಶ್ಯಕತೆಗೆ ಅನುಗುಣವಾಗಿ ಹಂತಹಂತವಾಗಿ ಸಾರಿಗೆಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.
ಆ)	ಹಾಗಿದ್ದಲ್ಲಿ, ಹಾಸನ ಜಿಲ್ಲೆಯ ತಾಲ್ಲೂಕುಗಳಿಂದ ಹಾಗೂ ಗ್ರಾಮೀಣ ಪ್ರದೇಶಗಳಿಂದ ಪ್ರತಿ ದಿನ ಸಾವಿರಾರು ಹೆಣ್ಣು ಮಕ್ಕಳು ಹಾಸನ ನಗರದಲ್ಲಿರುವ ಗಾರ್ಮೆಂಟ್ ಹಾಗೂ ಇತರೆ ಕಾರ್ಖಾನೆಗಳಲ್ಲಿ ಕೆಲಸ ನಿರ್ವಹಿಸಲು ಬಂದು ಹೋಗುತ್ತಿದ್ದು ಅವರಿಗೆ ಸರ್ಕಾರದ ಸಾರಿಗೆ ಬಸ್ ವ್ಯವಸ್ಥೆ ಇಲ್ಲದ ಕಾರಣ ಖಾಸಗಿ ಟೆಂಪೋ, ಆಟೋ ರಿಕ್ಷಾ ಹಾಗೂ ಇತರೆ ವಾಹನಗಳಲ್ಲಿ ಸಂಚರಿಸುತ್ತಿದ್ದು, ಸೂಕ್ತ ಸಂಚಾರ ಸುರಕ್ಷತೆ ಇಲ್ಲದ ಕಾರಣ ಹೆಣ್ಣು ಮಕ್ಕಳಿಗೆ ತೊಂದರೆಯಾಗುತ್ತಿರುವುದರಿಂದ ಬಸ್ ಸಂಚಾರ ವ್ಯವಸ್ಥೆ ಕಲ್ಪಿಸುವ ಬಗ್ಗೆ ಹಾಗೂ ಸರ್ಕಾರ ಗ್ರಾಮೀಣ ಪ್ರದೇಶದ ಬಡ ಹೆಣ್ಣು ಮಕ್ಕಳ ಹಿತದೃಷ್ಟಿಯಿಂದ ಅನುಕೂಲ ಮಾಡಿಕೊಡುವ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು?	

ಸಂಖ್ಯೆ: ಟಿಡಿ 24 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ಸರ್ಕಾರ

ಸಂ: ಟಿಡಿ 16 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:02.02.2021.

133
ULS
3/2/21

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಶಿವಣ್ಣ ಹೆಚ್. ಬಿ., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 564 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಶಿವಣ್ಣ ಹೆಚ್. ಬಿ., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 564 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Mala S 2/02/2021
(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 564

ಸದಸ್ಯರ ಹೆಸರು : ಶ್ರೀ ರೇವಣ್ಣ ಹೆಚ್.ಡಿ.(ಹೊಳೆನರಸೀಪುರ)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 03-02-2021

ಕ್ರ.ಸಂ.	ಪ್ರಶ್ನೆ	ಉತ್ತರಗಳು
ಅ)	ಹಾಸನ ಜಿಲ್ಲೆ ಹೊಳೆನರಸೀಪುರ ಟೌನ್‌ನಲ್ಲಿ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ ಸುಮಾರು 30 ವರ್ಷಗಳಷ್ಟು ಹಳೆಯದಾಗಿದ್ದು, ಹಿಂದಿನ ಮೈತ್ರಿ ಸರ್ಕಾರದ ಅವಧಿಯಲ್ಲಿ ಹೊಳೆನರಸೀಪುರ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದ ಆಧುನೀಕರಣ ಹಾಗೂ ಕೆ.ಎಸ್.ಆರ್.ಟಿ.ಸಿ ನೌಕರರ ವಸತಿ ಗೃಹಗಳ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲು ರೂ.5.50 ಕೋಟಿ ಅನುದಾನವನ್ನು ಮಂಜೂರು ಮಾಡಿ ಕಾಮಗಾರಿಯನ್ನು ಕೈಗೆತ್ತಿಕೊಂಡಿರುವುದು ನಿಜವೇ; (ಸಂಪೂರ್ಣ ಮಾಹಿತಿ ನೀಡುವುದು)	ಹೌದು. ಹಾಸನ ಜಿಲ್ಲೆ ಹೊಳೆನರಸೀಪುರ ಪಟ್ಟಣದಲ್ಲಿರುವ ಬಸ್ ನಿಲ್ದಾಣವು ಸುಮಾರು 30 ವರ್ಷಗಳಷ್ಟು ಹಳೆಯದಾಗಿದ್ದು, ಶಿಥಿಲಾವಸ್ಥೆಯಲ್ಲಿರುತ್ತದೆ. ಸದರಿ ಬಸ್ ನಿಲ್ದಾಣದ ಆಧುನೀಕರಣ ಕಾಮಗಾರಿಯನ್ನು ಕೈಗೊಳ್ಳಲು ರೂ.300.00 ಲಕ್ಷಗಳು ಹಾಗೂ ಸಿಬ್ಬಂದಿ ವಸತಿಗೃಹಗಳ ನಿರ್ಮಾಣ ಕಾಮಗಾರಿ ಒಳಗೊಂಡಂತೆ ಬಸ್ ಘಟಕವನ್ನು ಆಧುನೀಕರಿಸುವ ಕಾಮಗಾರಿಗಳನ್ನು ಕೈಗೊಳ್ಳಲು ರೂ.250.00 ಲಕ್ಷಗಳು ಮಂಜೂರಾಗಿದ್ದು, ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿರುತ್ತದೆ.
ಆ)	ಹೊಳೆನರಸೀಪುರ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದ ಆಧುನೀಕರಣ ಹಾಗೂ ಕೆ.ಎಸ್.ಆರ್.ಟಿ.ಸಿ ನೌಕರರ ವಸತಿ ಗೃಹಗಳ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಗುತ್ತಿಗೆದಾರರು ಕಾಮಗಾರಿಯ ಬಿಲ್ಲನ್ನು ಸಲ್ಲಿಸಿದ್ದರೂ ಸಹ, ಸಕಾಲದಲ್ಲಿ ಪಾವತಿಯಾಗದ ಕಾರಣ, ಈ ಕಾಮಗಾರಿಗಳು ತೀವ್ರ ಮಂದಗತಿಯಿಂದ ಸಾಗುತ್ತಿರುವುದರಿಂದ ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಹೊಳೆನರಸೀಪುರ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದ ಆಧುನೀಕರಣ ಹಾಗೂ ಕೆ.ಎಸ್.ಆರ್.ಟಿ.ಸಿ ನೌಕರರ ವಸತಿ ಗೃಹಗಳ ನಿರ್ಮಾಣ ಕಾಮಗಾರಿಗಳ ಬಿಲ್ಲುಗಳನ್ನು ಸಕಾಲದಲ್ಲಿ ಪಾವತಿಸಿ, ಕಾಮಗಾರಿಗೆ ಚಾಲನೆ ನೀಡಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ; ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)	ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ನಿಲ್ದಾಣದ ಆಧುನೀಕರಣ ಮತ್ತು ನೌಕರರ ವಸತಿ ಗೃಹಗಳ ನಿರ್ಮಾಣ ಕಾಮಗಾರಿಯು ಲಾಕ್‌ಡೌನ್ ಅವಧಿಯಲ್ಲಿ ಸ್ಥಗಿತಗೊಂಡಿರುವುದರಿಂದ ಹಾಗೂ ಕಟ್ಟಡ ಸಾಮಗ್ರಿಗಳು ಮತ್ತು ಕೂಲಿಯಾಳುಗಳ ಕೊರತೆಯಿಂದಾಗಿ ಕೆಲಸವು ಮಂದಗತಿಯಲ್ಲಿ ನಡೆದಿತ್ತು. ಸದರಿ ಕಾಮಗಾರಿಗಳನ್ನು ಪುನಃ ಪ್ರಾರಂಭಿಸಲಾಗಿದ್ದು, ಪ್ರಗತಿಯಲ್ಲಿರುತ್ತದೆ. ಕೋವಿಡ್-19ರಿಂದಾಗಿ ನಿಗಮದ ಆರ್ಥಿಕ ಪರಿಸ್ಥಿತಿ ಉತ್ತಮವಾಗಿರದ ಕಾರಣ ಗುತ್ತಿಗೆದಾರರಿಗೆ ಬಿಲ್ಲುಗಳನ್ನು ಸಕಾಲದಲ್ಲಿ ಪಾವತಿಸಲು ವಿಳಂಬವಾಗಿರುತ್ತದೆ. ಗುತ್ತಿಗೆದಾರರು ಕಾಮಗಾರಿಯನ್ನು ತ್ವರಿತಗತಿಯಲ್ಲಿ ನಿರ್ವಹಿಸಿ ಪೂರ್ಣಗೊಳಿಸಲು ಹಾಗೂ ಸಕಾಲದಲ್ಲಿ ಬಿಲ್ಲುಗಳನ್ನು ಪಾವತಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು.

ಸಂಖ್ಯೆ: ಟಿಡಿ 16 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ಸರ್ಕಾರ

ಸಂ: ಟಿಡಿ 22 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:02.02.2021.

80
UIS
3/2/21

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಲಿಂಗೇಶ್ K.S., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 649 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಲಿಂಗೇಶ್ K.S., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 649 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Mala S 02/02/2021
(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 649
ಸದಸ್ಯರ ಹೆಸರು	: ಶ್ರೀ ಲಿಂಗೇಶ ಕೆ.ಎಸ್. (ಬೇಲೂರು)
ಉತ್ತರಿಸುವ ಸಚಿವರು	: ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ	: 03-02-2021

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಬೆಂಗಳೂರು ಮಹಾನಗರ ಪಾಲಿಕೆ ವಲಯದ ವ್ಯಾಪ್ತಿಯಲ್ಲಿ ಸಾರಿಗೆ ವ್ಯವಸ್ಥೆಯನ್ನು ಸುವ್ಯವಸ್ಥಿತ ರೀತಿಯಲ್ಲಿ ಒದಗಿಸಲು ಒಂದು ವ್ಯವಸ್ಥಾಪಕ ನಿರ್ದೇಶಕರ ಹುದ್ದೆಯನ್ನು ನಿರ್ಮಿಸಿದ್ದು, ಸದರಿ ವ್ಯವಸ್ಥಾಪಕ ನಿರ್ದೇಶಕರು ನಿರ್ವಹಿಸುವ ಕಾರ್ಯಗಳೇನು (ಸಂಪೂರ್ಣ ಮಾಹಿತಿ ನೀಡುವುದು)	ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾಯ್ದೆ 1950ರ ಪ್ರಕಾರ ಸ್ಥಾಪಿತವಾಗಿದ್ದು, ಸಾರ್ವಜನಿಕರಿಗೆ ಸೂಕ್ತ, ಸಮರ್ಪಕ, ದಕ್ಷ, ಹೆಚ್ಚಿನ ಆರ್ಥಿಕ ಹೊರೆಯಲ್ಲದ ಹಾಗೂ ಸುರಕ್ಷಿತ ಸಾರಿಗೆ ವ್ಯವಸ್ಥೆಯನ್ನು ನೀಡುವ ಜವಾಬ್ದಾರಿಯನ್ನು ಸಂಸ್ಥೆಯು ಹೊಂದಿರುತ್ತದೆ. ತತ್ಸಂಬಂಧ, ಮಂಡಳಿ ನಿರ್ದೇಶಕರು ತೆಗದುಕೊಳ್ಳುವ ಎಲ್ಲಾ ನಿರ್ಧಾರ / ನೀತಿಗಳನ್ನು ಜಾರಿಗೊಳಿಸುವ ನಿಟ್ಟಿನಲ್ಲಿ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಯಾಗಿ ವ್ಯವಸ್ಥಾಪಕ ನಿರ್ದೇಶಕರು ತಮ್ಮ ಜವಾಬ್ದಾರಿಯನ್ನು ನಿರ್ವಹಿಸುತ್ತಾರೆ. ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನಾ ಪತ್ರ ಸಂಖ್ಯೆ: ಡಿಡಿಪಿಇಆರ್ 35 ಎಆರ್‌ಯು 2003, ದಿನಾಂಕ:07.05.2003ರನ್ವಯ ವ್ಯವಸ್ಥಾಪಕ ನಿರ್ದೇಶಕರವರು ಬೆಂ.ಮ.ಸಾ.ಸಂಸ್ಥೆಯ ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿಗಳಾಗಿದ್ದು ಅವರ ಕರ್ತವ್ಯಗಳು ಈ ಕೆಳಕಂಡಂತೆ ಇರುತ್ತವೆ: 1) ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿಗಳು ಕಾರ್ಯ ನಿರ್ವಾಹಕ ಮಂಡಳಿಯಿಂದ ಪ್ರದತ್ತವಾದ ಅಧಿಕಾರಗಳನ್ವಯ ಎಲ್ಲಾ ದೈನಂದಿನ ಕಾರ್ಯ ನಿರ್ವಹಣಾ ಮತ್ತು ವ್ಯವಸ್ಥಾಪಕ ಕರ್ತವ್ಯಗಳನ್ನು ನಿರ್ವಹಿಸುವುದು. 2) ಆಡಳಿತ ನಿರ್ವಾಹಕ ಮಂಡಳಿ ಸಭೆಗಳನ್ನು ಅಧ್ಯಕ್ಷರೊಂದಿಗೆ ಚರ್ಚಿಸಿ ಆಡಳಿತ ಮಂಡಳಿಯ ನಿರ್ವಾಹಕ ಸಭೆಗಳ ದಿನಾಂಕಗಳನ್ನು ಮುಂಚಿತವಾಗಿಯೇ ನಿರ್ಧರಿಸುವುದು. 3) ಸರ್ಕಾರ ಹೊರಡಿಸಿರುವ ಸರ್ಕಾರದ ಆದೇಶಗಳು, ಸುತ್ತೋಲೆಗಳು ಮತ್ತಿತರ ಮಾರ್ಗದರ್ಶನಗಳು, ಅನುಷ್ಠಾನಗೊಳಿಸುವಂತೆ ನೋಡಿಕೊಳ್ಳುವ ಸಂಪೂರ್ಣ ಜವಾಬ್ದಾರಿ ಇರುತ್ತದೆ ಮತ್ತು ಸದರಿ ಸೂಚನೆಗಳನ್ನು ಅಳವಡಿಸಿಕೊಳ್ಳಲು ಅನುವಾಗುವಂತೆ ಆಡಳಿತ ನಿರ್ವಾಹಕ ಮಂಡಳಿ ಸಭೆಯ ಮುಂದೆ ತರುವುದು. 4) ಸರ್ಕಾರದ ಸುತ್ತೋಲೆಗಳು, ಮಾರ್ಗದರ್ಶನಗಳು ಮತ್ತಿತರೆಡೆಗಳಲ್ಲಿ ಹೇಳಿರುವಂತೆ ಸಾರ್ವಜನಿಕ ಉದ್ದಿಮೆಗಳ ಹಾಗೂ ನಿರ್ದೇಶಕರುಗಳ ಪಾತ್ರ, ಕರ್ತವ್ಯ ಮತ್ತು ಜವಾಬ್ದಾರಿಯ ನಿರ್ವಹಣೆಯ ಕಾರ್ಯವನ್ನು ನಿಯಮಗಳು ಮತ್ತು ಸೂಚನೆಗಳ ರೀತಿಯಲ್ಲಿ ಅನುಷ್ಠಾನಕ್ಕೆ ತರುವುದು. 5) ಸರ್ಕಾರವು ಹೊರಡಿಸಿರವ ಆದೇಶ, ನಿಯಮ ನಿಬಂಧನೆಗಳಿಗೆ ಬಹುಸಂಖ್ಯಾತ ನಿರ್ದೇಶಕರುಗಳ ಸಮ್ಮತಿ ಪಡೆಯಲು ಮುಖ್ಯ ಕಾರ್ಯನಿರ್ವಹಣಾಧಿಕಾರಿಗೆ ಆಗದಿದ್ದಲ್ಲಿ ಅಥವಾ ತೆಗೆದುಕೊಳ್ಳುವ ನಿರ್ಧಾರವು ಈ ರೀತಿ ಹೊರಡಿಸುವ ಆದೇಶ, ನಿಯಮ ನಿಬಂಧನೆಗಳಿಗೆ ವ್ಯತಿರಿಕ್ತವಾಗಿದ್ದಲ್ಲಿ ಅಥವಾ ಸಂಸ್ಥೆಯ ಹಣಕಾಸು ಮತ್ತು ವಾಣಿಜ್ಯ ಆಸಕ್ತಿಗಳಿಗೆ ವಿರುದ್ಧವಾಗಿದ್ದಲ್ಲಿ ಅಭಿಪ್ರಾಯ ಭೇದದ ಟಿಪ್ಪಣಿಯನ್ನು ನೀಡುವುದು ಮತ್ತು ಸದರಿ ವಿಷಯವನ್ನು ಸಂಬಂಧಿಸಿದ ಸನ್ನಿವೇಶಗಳ ವಿವರಣೆಗಳೊಂದಿಗೆ ಸರ್ಕಾರಕ್ಕೆ ಉಲ್ಲೇಖಿಸಿ ಸರ್ಕಾರದ ಆದೇಶವನ್ನು ಕೋರುವುದು. 6) ಸಂಸ್ಥೆಯು ಆರ್ಥಿಕವಾಗಿ ಸುಧಾರಿಸುವ ನಿಟ್ಟಿನಲ್ಲಿ ಕ್ರಿಯಾತ್ಮಕವಾದ ಕಾರ್ಯ ನಿರ್ವಹಿಸುವುದು ಪ್ರಮುಖ ಕರ್ತವ್ಯವಾಗಿರುತ್ತದೆ.

...2

ಆ)	ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವ್ಯಾಪ್ತಿಯಲ್ಲಿ ಪ್ರತಿನಿತ್ಯ ಎಷ್ಟು ನಗರ ಸಾರಿಗೆ ಬಸ್ಸುಗಳು ಮಾರ್ಗದಲ್ಲಿ ಸಂಚರಿಸುತ್ತಿವೆ ಹಾಗೂ ಈ ಸಂಸ್ಥೆಯ ವ್ಯಾಪ್ತಿಯಲ್ಲಿ ಯಾವ ಯಾವ ರೀತಿಯ/ಮಾದರಿಯ ಬಸ್ಸುಗಳನ್ನು ಓಡಿಸಲಾಗುತ್ತಿದೆ;	ದಿನಾಂಕ: 27-01-2021ರಲ್ಲಿದ್ದಂತೆ ಬೆಂ.ಮ.ಸಾ.ಸಂಸ್ಥೆಯಿಂದ ಪ್ರತಿನಿತ್ಯ ಸರಾಸರಿ 5272 ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುತ್ತಿದೆ. ಸಂಸ್ಥೆಯ ವ್ಯಾಪ್ತಿಯಲ್ಲಿ ಟಾಟಾ, ಲೇಲ್ಯಾಂಡ್, ಐಷರ್ ಮತ್ತು ವೋಲ್ವೋ ಮಾದರಿಯ ಬಸ್ಸುಗಳನ್ನು ಕಾರ್ಯಾಚರಿಸಲಾಗುತ್ತಿದೆ.
ಇ)	ಬೆಂಗಳೂರು ನಗರ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಈ ಸಾರಿಗೆಯಲ್ಲಿ ಎಷ್ಟು ಜನ ಪ್ರಯಾಣಿಕರು ಪ್ರತಿನಿತ್ಯ ಪ್ರಯಾಣಿಸುತ್ತಾರೆ; ಕಳೆದ 03 ವರ್ಷಗಳಿಂದ ವ್ಯಾಪ್ತಿಯ ವಿಭಾಗಗಳು ಹಾಗೂ ಘಟಕಗಳವಾರು ಸಂಸ್ಥೆಗಳು ಗಳಿಸುತ್ತಿರುವ ಲಾಭ/ನಷ್ಟವೆಷ್ಟು (ಸಂಪೂರ್ಣ ಮಾಹಿತಿ ನೀಡುವುದು);	ಪ್ರಸ್ತುತ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಸಾರಿಗೆಗಳಲ್ಲಿ ಪ್ರತಿದಿನ ಅಂದಾಜು ಸರಾಸರಿ 22.65 ಲಕ್ಷ ಪ್ರಯಾಣಿಕರು ಸಂಚರಿಸುತ್ತಿರುತ್ತಾರೆ. ಕಳೆದ 3 ವರ್ಷಗಳಿಂದ ಸಂಸ್ಥೆಯ ವ್ಯಾಪ್ತಿಯ ವಿಭಾಗಗಳು ಹಾಗೂ ಘಟಕಗಳವಾರು ಲಾಭ/ನಷ್ಟದ ವಿವರವನ್ನು **<u>ಅನುಬಂಧ-'ಅ'</u>** ನಲ್ಲಿ ನೀಡಿದೆ.
ಈ)	ಈ ಸಂಸ್ಥೆಯು ನಷ್ಟ ಅನುಭವಿಸುತ್ತಿದ್ದಲ್ಲಿ, ನಷ್ಟ ಅನುಭವಿಸಲು ನಿಖರವಾದ ಕಾರಣಗಳೇನು; ಈ ಸಂಸ್ಥೆಯನ್ನು ನಷ್ಟದಿಂದ ಪಾರು ಮಾಡಿ ಲಾಭಗಳಿಸುವಂತೆ ಮಾಡಲು ಸರ್ಕಾರವು ಕೈಗೊಂಡ ಮಾರ್ಗೋಪಾಯಗಳೇನು (ಸಂಪೂರ್ಣ ಮಾಹಿತಿ ನೀಡುವುದು);	ಸಂಸ್ಥೆಯ ಒಟ್ಟಾರೆ ವೆಚ್ಚದಲ್ಲಿ ಸುಮಾರು ಶೇ.80ರಷ್ಟು ಪಾಲು ಸಿಬ್ಬಂದಿ ವೆಚ್ಚ ಮತ್ತು ಇಂಧನ ವೆಚ್ಚಗಳಾಗಿರುತ್ತದೆ ಹಾಗೂ ಸಂಸ್ಥೆಯು ನಷ್ಟವನ್ನು ಅನುಭವಿಸಲು ಈ ಕೆಳಗಿನ ಅಂಶಗಳು ಪ್ರಮುಖ ಕಾರಣವಾಗಿರುತ್ತದೆ: ➢ ಪ್ರತಿ ವರ್ಷವು ಹೆಚ್ಚಾಗುತ್ತಿರುವ ಸಿಬ್ಬಂದಿ ವೆಚ್ಚ. ➢ ಪ್ರತಿ ಮಾಹೆ ಹೆಚ್ಚಾಗುತ್ತಿರುವ ಇಂಧನ ದರದಿಂದಾಗಿ ಅಧಿಕವಾಗುತ್ತಿರುವ ಇಂಧನ ವೆಚ್ಚ. ➢ ಉಗ್ರಾಣ ಸಾಮಗ್ರಿಗಳ ವೆಚ್ಚ ಹೆಚ್ಚಾಗಿರುವುದು. ➢ ಸಂಸ್ಥೆಯ ವಾಹನಗಳಲ್ಲಿ ಸಂಚರಿಸುತ್ತಿದ್ದ ಸುಮಾರು 5 ಲಕ್ಷ ಪ್ರಯಾಣಿಕರು 'ನಮ್ಮ ಮೆಟ್ರೋ'ಗೆ ವರ್ಗಾವಣೆಗೊಂಡ ಪ್ರಯುಕ್ತ ಸಾರಿಗೆ ಆದಾಯ ಗಳಿಕೆಯಲ್ಲಿ ಇಳಿಮುಖವಾಗಿರುತ್ತದೆ. ➢ ಬೆಂಗಳೂರು ಮಹಾನಗರದಲ್ಲಿ ಪ್ರಯಾಣಿಕರು ಓಲಾ, ಉಬರ್, ಇತರೆ ಕ್ಯಾಬ್‌ಗಳ ಬಳಕೆಯಿಂದಾಗಿ ಸಾರಿಗೆ ಆದಾಯದ ಗಳಿಕೆಯಲ್ಲಿ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ➢ ಸಂಸ್ಥೆಯು ಬೆಂಗಳೂರು ನಗರಕ್ಕೆ ಸಾರಿಗೆ ಸೌಲಭ್ಯ ಒದಗಿಸಲು ಏಕಸ್ವಾಮ್ಯತೆಯನ್ನು ಹೊಂದಿರುತ್ತದೆ. ನಗರದಲ್ಲಿ ದಿನೇ ದಿನೇ ಖಾಸಗಿ ವಾಹನಗಳ ಸಂಖ್ಯೆಯು ಹೆಚ್ಚಾಗಿ ಸಂಚಾರ ದಟ್ಟಣೆ ಉಂಟಾಗುತ್ತಿದ್ದು, ಸಂಸ್ಥೆಯ ಭೌತಿಕ ಅಂಶಗಳ ಗುರಿಯನ್ನು ಸಾಧಿಸಲು ಕಷ್ಟಸಾಧ್ಯವಾಗಿರುತ್ತದೆ. ಆದ್ದರಿಂದ ಹೆಚ್ಚಿನ ನಷ್ಟವನ್ನು ಅನುಭವಿಸುತ್ತಿದೆ. ➢ ಸಂಚಾರ ದಟ್ಟಣೆಯಿಂದ ನಿಗದಿತ ಕಿ.ಮೀ ಗಳ ಆಚರಣೆ ಕಷ್ಟ ಸಾಧ್ಯವಾಗಿದ್ದು, ವಾಹನಗಳ ಬಳಕೆ (Vehicle Utilisation) ಕಡಿಮೆಯಾಗಿರುತ್ತದೆ. ➢ ಸಂಸ್ಥೆಯು ತನ್ನ ಬಂಡವಾಳ ವೆಚ್ಚಗಳಿಗಾಗಿ ರಾಷ್ಟ್ರೀಕೃತ ಬ್ಯಾಂಕುಗಳು/ ಹಣಕಾಸು ಸಂಸ್ಥೆಗಳಿಂದ ಸಾಲಗಳನ್ನು ಪಡೆದಿದ್ದು, ಸಾಲಗಳ ಮೇಲಿನ ಬಡ್ಡಿಯು ಸಹ ನಷ್ಟಕ್ಕೆ ಕಾರಣವಾಗಿರುತ್ತದೆ. ➢ ಮಾರ್ಚ್-2020ರಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ಪ್ರಯಾಣಿಕರು ಸಾರ್ವಜನಿಕ ಬಸ್ ಬಳಕೆಯನ್ನು ಕಡಿಮೆಗೊಳಿಸಿರುತ್ತಾರೆ.

...3

ಕರ್ನಾಟಕ ಸರ್ಕಾರ

ಸಂ: ಮಮಇ 53 ಐಸಿಡಿ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 02.02.2021.

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬೆಂಗಳೂರು.

112
45
03/2/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭಾ ಸಚಿವಾಲಯ,
ವಿಧಾನಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನಸಭಾ ಸದಸ್ಯರು ಶ್ರೀ ನಿಸರ್ಗ ನಾರಾಯಣ ಸ್ವಾಮಿ ಎಲ್.ಎನ್., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:681ಕ್ಕೆ ಉತ್ತರಿಸುವ ಬಗ್ಗೆ.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ನಿಸರ್ಗ ನಾರಾಯಣ ಸ್ವಾಮಿ ಎಲ್.ಎನ್. ಇವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 681ಕ್ಕೆ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,
Padmini S.N 2/2
(ಪದ್ಮಿನಿ ಎಸ್ ಎನ್)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	681
ಸದಸ್ಯರ ಹೆಸರು	:	ಶ್ರೀ ನಿಸರ್ಗ ನಾರಾಯಣಸ್ವಾಮಿ ಎಲ್.ಎನ್ (ದೇವನಹಳ್ಳಿ)
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು
ಉತ್ತರಿಸಬೇಕಾದ ದಿನಾಂಕ	:	03-02-2021

ಕ್ರ. ಸಂ	ಪ್ರಶ್ನೆ	ಉತ್ತರ
ಅ	ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳು ಎಷ್ಟು; (ತಾಲ್ಲೂಕುವಾರು ಪೂರ್ಣ ಮಾಹಿತಿಯನ್ನು ನೀಡುವುದು).	ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ವಿವರ (ಕೆಳಗಿನ ಕೋಷ್ಟಕ)
ಆ.	ಹಾಗಿದ್ದಲ್ಲಿ, ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳಿಗೆ ಎಷ್ಟು ಸ್ವಂತ ಕಟ್ಟಡಗಳಿವೆ; ಸ್ವಂತ ಕಟ್ಟಡಗಳಿಲ್ಲದ ಕೇಂದ್ರಗಳೆಷ್ಟು; ಅವು ಯಾವುವು; (ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು).	ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯಲ್ಲಿ ಸ್ವಂತ ಕಟ್ಟಡ ಹೊಂದಿರುವ ಹಾಗೂ ಸ್ವಂತ ಕಟ್ಟಡಗಳಿಲ್ಲದ ಅಂಗನವಾಡಿ ಕೇಂದ್ರಗಳ ತಾಲ್ಲೂಕುವಾರು ವಿವರ (ಕೆಳಗಿನ ಕೋಷ್ಟಕ)

ಅ – ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ವಿವರ

ಕ್ರ.ಸಂ	ತಾಲ್ಲೂಕಿನ ಹೆಸರು	ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ
1	ದೇವನಹಳ್ಳಿ	263
2	ದೊಡ್ಡಬಳ್ಳಾಪುರ	369
3	ಹೊಸಕೋಟೆ	310
4	ನೆಲಮಂಗಲ	287
ಒಟ್ಟು		**1229**

ಆ – ಸ್ವಂತ ಕಟ್ಟಡ ಹೊಂದಿರುವ ಹಾಗೂ ಸ್ವಂತ ಕಟ್ಟಡಗಳಿಲ್ಲದ ಅಂಗನವಾಡಿ ಕೇಂದ್ರಗಳ ತಾಲ್ಲೂಕುವಾರು ವಿವರ

ಕ್ರ.ಸಂ	ತಾಲ್ಲೂಕಿನ ಹೆಸರು	ಸ್ವಂತ ಕಟ್ಟಡಗಳ ಸಂಖ್ಯೆ	ಸ್ವಂತ ಕಟ್ಟಡಗಳಿಲ್ಲದ ಅಂ.ಕೇ ಸಂಖ್ಯೆ
1	ದೇವನಹಳ್ಳಿ	211	43
2	ದೊಡ್ಡಬಳ್ಳಾಪುರ	292	68
3	ಹೊಸಕೋಟೆ	249	57
4	ನೆಲಮಂಗಲ	218	48
ಒಟ್ಟು		**970**	**216**

ಇ.	ಹಾಗಿದ್ದಲ್ಲಿ, ಸ್ವಂತ ಕಟ್ಟಡಗಳಿಲ್ಲದ ಕೇಂದ್ರಗಳಿಗೆ ಕಟ್ಟಡ ಒದಗಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; ನಿವೇಶನಗಳ ಲಭ್ಯತೆ ಇದೆಯೇ; ನಿವೇಶನಗಳ ಕೊರತೆಯಿರುವ ಕೇಂದ್ರಗಳೆಷ್ಟು? (ತಾಲ್ಲೂಕುವಾರು ಗ್ರಾಮವಾರು ಮಾಹಿತಿ ನೀಡುವುದು).	• ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸ್ವಂತ ಕಟ್ಟಡಗಳಿಲ್ಲದ ಅಂಗನವಾಡಿ ಕೇಂದ್ರಗಳಿಗೆ ಕಟ್ಟಡ ನಿರ್ಮಿಸಲು ನಿವೇಶನ ಒದಗಿಸುವಂತೆ ತಾಲ್ಲೂಕು ಕಾರ್ಯನಿರ್ವಹಣಾಧಿಕಾರಿಗಳು, ತಾಲ್ಲೂಕು ಪಂಚಾಯಿತಿ, ಮಾನ್ಯ ಜಿಲ್ಲಾಧಿಕಾರಿಗಳಿಗೆ, ಕಂದಾಯ ಅಧಿಕಾರಿಗಳಿಗೆ ಹಾಗೂ ಯೋಜನಾ ನಿರ್ದೇಶಕರು ನಗರಾಭಿವೃದ್ಧಿ ಕೋಶ ಇವರಿಗೆ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ ಜಿಲ್ಲಾ ಉಪ ನಿರ್ದೇಶಕರು ಪತ್ರ ಬರೆಯಲಾಗಿದ್ದು, ನಿವೇಶನ ದೊರೆತ ನಂತರ ಅನುದಾನ ಲಭ್ಯತೆ ಮೇರೆಗೆ ನಿರ್ಮಾಣ ಕೈಗೊಳ್ಳಲಾಗುವುದು. • ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ನಿವೇಶನ ಲಭ್ಯವಿರುವ ಹಾಗೂ ನಿವೇಶನ ಕೊರತೆಯಿರುವ ಅಂಗನವಾಡಿ ಕೇಂದ್ರಗಳ ಪಟ್ಟಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ.

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ,
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ: ಮಮಇ 53 ಐಸಿಡಿ 2021

ಕರ್ನಾಟಕ ಸರ್ಕಾರ

ಸಂ: ಮಮಇ 43 ಐಸಿಡಿ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 02.02.2021.

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭಾ ಸಚಿವಾಲಯ,
ವಿಧಾನಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನಸಭಾ ಸದಸ್ಯರು **ಡಾ॥ ಭರತ್ ಶೆಟ್ಟಿ ವೈ.** ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:576ಕ್ಕೆ ಉತ್ತರಿಸುವ ಬಗ್ಗೆ.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ **ಡಾ॥ ಭರತ್ ಶೆಟ್ಟಿ ವೈ.** ಇವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 576ಕ್ಕೆ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Padmini S.N 2/2

(ಪದ್ಮಿನಿ ಎಸ್ ಎನ್)
ಸರ್ಕಾರದ ಅಧೀನ ಕಾರ್ಯದರ್ಶಿ–1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 576
ಸದಸ್ಯರ ಹೆಸರು	: ಡಾ॥ ಭರತ್ ಶೆಟ್ಟಿ ವೈ.(ಮಂಗಳೂರು ನಗರ ಉತ್ತರ)
ಉತ್ತರಿಸುವ ದಿನಾಂಕ	: 03.02.2021
ಉತ್ತರಿಸುವ ಸಚಿವರು	: ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖಾ ಸಚಿವರು.

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿನ ಮಕ್ಕಳ ಸಮಗ್ರ ಪೋಷಣೆ ಕುರಿತು ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ಯೋಜನೆಗಳ ಮೂಲಕ ಅನುಷ್ಠಾನಗೊಳಿಸಿದ ಯೋಜನೆಗಳ ಸೌಲಭ್ಯ ಪಡೆದ ಒಟ್ಟು ಮಕ್ಕಳ ಸಂಖ್ಯೆ ಎಷ್ಟು;</td><td>ಕಳೆದ 2 ವರ್ಷಗಳಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯವತಿಯಿಂದ ಮಕ್ಕಳ ಸಮಗ್ರ ಪೋಷಣೆಗಾಗಿ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಸದರಿ ಯೋಜನೆಗಳ ಸೌಲಭ್ಯ ಪಡೆದ ಫಲಾನುಭವಿಗಳ ವಿವರ ಈ ಕೆಳಕಂಡಂತಿರುತ್ತದೆ.
<table>
<tr><th rowspan="2">ಕ್ರ. ಸಂ.</th><th rowspan="2">ಯೋಜನೆಯ ಹೆಸರು</th><th rowspan="2">ವಲಯ</th><th colspan="2">ಸೌಲಭ್ಯ ಪಡೆದ ಫಲಾನುಭವಿಗಳ ಸಂಖ್ಯೆ</th></tr>
<tr><th>2018-19</th><th>2019-20</th></tr>
<tr><td>1</td><td>ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮ (ಕೇಂದ್ರ 50%:ರಾಜ್ಯ50%)</td><td>ಕೇಂದ್ರ ವಲಯ</td><td>36,86,771</td><td>35,75,604</td></tr>
<tr><td>2</td><td>ಉದ್ಯೋಗಸ್ಥ ಮಾತೆಯರ ಮಕ್ಕಳ ಪೋಷಣೆಗಾಗಿ ಶಿಶು ಪಾಲನಾ ಕೇಂದ್ರಗಳು (ಕೇಂದ್ರ 60%:ರಾಜ್ಯ-30%-ಎನ್.ಜಿ.ಒ: 10%)</td><td>ಕೇಂದ್ರ ವಲಯ</td><td>15,275</td><td>15,275</td></tr>
<tr><td>3</td><td>ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚಭರಿಸುವ ಯೋಜನೆ (ರಾಜ್ಯ: 100%)</td><td>ರಾಜ್ಯ ವಲಯ</td><td>10,188</td><td>9,506</td></tr>
</table></td></tr>
<tr><td>ಆ)</td><td>ವಿಶೇಷ ಚೇತನ ಮಕ್ಕಳ ವೈದ್ಯಕೀಯ ಸೇವೆಯಲ್ಲಿ ಪ್ರಗತಿ ಮತ್ತು ಅನಾರೋಗ್ಯ ಪೀಡಿತ ಮಕ್ಕಳ ಪೋಷಣೆಗಾಗಿ ಸರ್ಕಾರ ಪರಿಣಾಮಕಾರಿ ಕ್ರಮಗಳ ಕುರಿತಾದ ವಿವರಗಳೇನು; ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)</td><td>ವಿಕಲಚೇತನರ ಅಂಗವಿಕಲತೆ ನಿವಾರಿಸುವ ಶಸ್ತ್ರಚಿಕಿತ್ಸೆಗಾಗಿ ಸುಸಜ್ಜಿತ ಸರ್ಕಾರಿ ಆಸ್ಪತ್ರೆಗಳು, ಸಂಜಯಗಾಂಧಿ ಆಸ್ಪತ್ರೆ ಹಾಗೂ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಅಂಗವಿಕಲತೆ ನಿವಾರಣಾ ಶಸ್ತ್ರಚಿಕಿತ್ಸೆಗಾಗಿ ರೂ.1.00 ಲಕ್ಷಗಳವರೆಗೆ ಸಹಾಯಧನವನ್ನು ಮಂಜೂರು ಮಾಡಲು ಅವಕಾಶವಿರುತ್ತದೆ. ಈ ಯೋಜನೆಯಡಿ ವಿಕಲಚೇತನ ಮಕ್ಕಳಿಗೂ ಸಹ ಅಂಗವಿಕಲತೆ ನಿವಾರಣೆ ಮಾಡಲು ಧನಸಹಾಯ ಮಂಜೂರು ಮಾಡಲಾಗುತ್ತಿದೆ.

ಬುದ್ದಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆಗೆ ಒಳಗಾದ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ ವಿಕಲಚೇತನರಿಗೆ ನಿರಾಮಯ ಎಂಬ ಆರೋಗ್ಯ ವಿಮಾ ಯೋಜನೆಯು ಜಾರಿಯಲ್ಲಿರುತ್ತದೆ.

ಬುದ್ದಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆ ಹೊಂದಿರುವ ಪ್ರತಿ ವ್ಯಕ್ತಿ ಹಾಗೂ ಮಗುವಿಗೆ ವರ್ಷಕ್ಕೆ ಒಂದು ಬಾರಿ ಪ್ರೀಮಿಯಂ ಮೊತ್ತ ರೂ.250/-ಗಳನ್ನು ಭಾರತ ಸರ್ಕಾರದಿಂದ ಗುರುತಿಸಲ್ಪಟ್ಟ ಅಧಿಕೃತ ಸಂಸ್ಥೆಯಾದ ಅಂಗವಿಕಲರ ಮನಶ್ಚೇತನ ಸಂಸ್ಥೆ (ರಿ) (ಎ.ಪಿ.ಡಿ) ಬೆಂಗಳೂರು ರವರಿಗೆ ಪಾವತಿಸಲಾಗುವುದು. ಪ್ರತಿ ವರ್ಷ ಯೋಜನೆಯಡಿ ಬರುವ ಫಲಾನುಭವಿಗಳು ರೂ.1.00 ಲಕ್ಷಗಳವರೆಗೆ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ. ಈ ಮೊತ್ತದಲ್ಲಿ ರೂ.60,000/-ಗಳವರೆಗೆ ಸರ್ಜರಿ ವೆಚ್ಚ ಉಳಿದ ರೂ.40,000/-ಗಳಲ್ಲಿ ವೈದ್ಯಕೀಯ ಖರ್ಚು ಥೆರಪಿ, ಪ್ರಯಾಣ ವೆಚ್ಚಗಳನ್ನು ಒಳಗೊಂಡಿರುತ್ತದೆ.</td></tr>
</table>

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ,
ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂ:ಮಮಇ 43 ಐಸಿಡಿ 2021

ಕರ್ನಾಟಕ ಸರ್ಕಾರ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಸಂಖ್ಯೆ:ಗ್ರಾಅಪಂ/14/ಯೋಉಮಾ/2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:02-02-2021

161
LA/S
3/2/21

ಇವರಿಂದ,
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ,
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನಸಭೆ ಸದಸ್ಯರಾದ ಶ್ರೀ ಶ್ರೀನಿವಾಸಮೂರ್ತಿ ಕೆ.ಡಾ|| (ನೆಲಮಂಗಲ) ಇವರ ಚುಕ್ಕೆ ಗುರುತಿಲ್ಲದ ಪ್ರ.ಸಂ. 642 ಕ್ಕೆ ಉತ್ತರಿಸುವ ಕುರಿತು.

ಉಲ್ಲೇಖ: ಕರ್ನಾಟಕ ವಿಧಾನಸಭೆ ಸಚಿವಾಲಯದ ಪತ್ರ ಸಂಖ್ಯೆ:ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.642/2021 ದಿ:23-01-2021

****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ ಪತ್ರದಲ್ಲಿ ಮಾನ್ಯ ವಿಧಾನಸಭೆ ಸದಸ್ಯರಾದ ಶ್ರೀ ಶ್ರೀನಿವಾಸಮೂರ್ತಿ ಕೆ.ಡಾ|| (ನೆಲಮಂಗಲ) ಇವರ ಚುಕ್ಕೆ ಗುರುತಿಲ್ಲದ ಪ್ರ.ಸಂ.642 ಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕೋರಲಾದ ಮಾಹಿತಿಯ ಉತ್ತರದ 25 ಪ್ರತಿಗಳನ್ನು ಸಲ್ಲಿಸಿದೆ ಹಾಗೂ ಮಾಹಿತಿಯನ್ನು ಇ-ಮೇಲ್ ಮೂಲಕ ಕಳುಹಿಸಲಾಗಿದೆ.

ತಮ್ಮ ನಂಬುಗೆಯ,

ನಿರ್ದೇಶಕರು,
ಯೋಜನೆ ಉಸ್ತುವಾರಿ ಮತ್ತು ಮಾಹಿತಿ ವಿಭಾಗ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ

ವಿಧಾನ ಸಭೆಯ ಸದಸ್ಯರ ಹೆಸರು : ಶ್ರೀ ಶ್ರೀನಿವಾಸಮೂರ್ತಿ ಕೆ. ಡಾ|| (ನೆಲಮಂಗಲ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 642
ಉತ್ತರಿಸಬೇಕಾದ ದಿನಾಂಕ : 03.02.2021
ಉತ್ತರಿಸುವ ಸಚಿವರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕ್ರ.	ಪ್ರಶ್ನೆ	ಇಲಾಖೆಯ ಮಾಹಿತಿ
ಅ	ನೆಲಮಂಗಲ ವಿಧಾನ ಸಭಾ ಕ್ಷೇತ್ರಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕಳೆದ ಮೂರು ವರ್ಷಗಳಿಂದ ವಿವಿಧ ಲೆಕ್ಕ ಶೀರ್ಷಿಕೆಯಡಿ ಯೋಜನೆವಾರು ಮಂಜೂರು ಮಾಡಲಾದ ಅನುದಾನವೆಷ್ಟು: (ಸರ್ಕಾರ ಆದೇಶ ಪ್ರತಿ ಸಮೇತ ಮಾಹಿತಿ ಒದಗಿಸುವುದು)	ನೆಲಮಂಗಲ ವಿಧಾನ ಸಭಾ ಕ್ಷೇತ್ರಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕಳೆದ ಮೂರು ವರ್ಷಗಳಿಂದ ವಿವಿಧ ಲೆಕ್ಕ ಶೀರ್ಷಿಕೆಯಡಿ ಯೋಜನೆವಾರು ಮಂಜೂರು ಮಾಡಲಾದ ಅನುದಾನದ ವಿವರವನ್ನು **ಅನುಬಂಧ :1** ರಲ್ಲಿ ಒದಗಿಸಿದೆ. **(ಪುಟ ಸಂಖ್ಯೆ : 1 ರಿಂದ 2)**
ಆ	ನೆಲಮಂಗಲ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಮಂಜೂರು ಮಾಡಲಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ: (ವಿವರ ನೀಡುವುದು)	ನೆಲಮಂಗಲ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಮಂಜೂರು ಮಾಡಲಾದ ಅನುದಾನದಲ್ಲಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳ ವಿವರವನ್ನು **ಅನುಬಂಧ-1** ರಲ್ಲಿ ಒದಗಿಸಿದೆ. **(ಪುಟ ಸಂಖ್ಯೆ : 1 ರಿಂದ 2)**
ಇ	ನೆಲಮಂಗಲ ವಿಧಾನ ಸಭಾ ಕ್ಷೇತ್ರದಲ್ಲಿ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಜಿಲ್ಲಾ ಪಂಚಾಯಿತಿಯಿಂದ ಮಂಜೂರು ಮಾಡಲಾದ ಅನುದಾನದವೆಷ್ಟು :ಮಂಜೂರು ಮಾಡಲಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ : (ವಿವರ ನೀಡುವುದು)	ನೆಲಮಂಗಲ ವಿಧಾನ ಸಭಾ ಕ್ಷೇತ್ರದಲ್ಲಿ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಜಿಲ್ಲಾ ಪಂಚಾಯಿತಿಯಿಂದ ಮಂಜೂರು ಮಾಡಲಾದ ಅನುದಾನದ ವಿವರ ಹಾಗೂ ಸದರಿ ಅನುದಾನದಲ್ಲಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳ ವಿವಿರವನ್ನು **ಅನುಬಂಧ-1** ರಲ್ಲಿ ಒದಗಿಸಿದೆ.**(ಪುಟ ಸಂಖ್ಯೆ : 1 ರಿಂದ 2)**
ಈ	ಈ ವಿಧಾನಸಭಾ ಕ್ಷೇತ್ರದಲ್ಲಿ ಇದುವರೆಗೂ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಮಂಜೂರು ಮಾಡಿ ನಿರ್ಮಿಸಲಾಗಿದೆ: ಯಾವ ಯಾವ ಗ್ರಾಮಗಳಲ್ಲಿ ಶುದ್ಧ ನೀರಿನ ಘಟಕಗಳನ್ನು ಸ್ಥಾಪನೆ ಮಾಡಲಾಗಿದೆ: (ಗ್ರಾಮವಾರು ವಿವರ ನೀಡುವುದು)	ಈ ವಿಧಾನಸಭಾ ಕ್ಷೇತ್ರದಲ್ಲಿ ಇದುವರೆಗೂ ಮಂಜೂರು ಮಾಡಿ ಗ್ರಾಮಗಳಲ್ಲಿ ನಿರ್ಮಿಸಲಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ವಿವರವನ್ನು **ಅನುಬಂಧ-2 ರಲ್ಲಿ** ಒದಗಿಸಿದೆ.**(ಪುಟ ಸಂಖ್ಯೆ : 3 ರಿಂದ 6)**
ಒ	2020-21 ನೇ ಸಾಲಿನಲ್ಲಿ ನೆಲಮಂಗಲ ಕ್ಷೇತ್ರಕ್ಕೆ ಹೊಸದಾಗಿ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣ ಮಾಡುವ ಕುರಿತು ಅನುದಾನ ಬಿಡುಗಡೆ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೇ ?	ನೆಲಮಂಗಲ ತಾಲ್ಲೂಕಿನ ಗ್ರಾಮಗಳ ವ್ಯಾಪ್ತಿಯಲ್ಲಿ ಯಾವುದೇ ಕಲುಷಿತ ಜಲಮೂಲಗಳು ಕಂಡುಬಂದಿರುವುದಿಲ್ಲ, ಗ್ರಾಮಗಳಲ್ಲಿ ಕಲುಷಿತ ಜಲಮೂಲಗಳು ಕಂಡು ಬಂದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ಗ್ರಾಅಪ 14 ಯೋಉಮಾ 2021

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂ: ಟಿಡಿ 18 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:02.02.2021.

3H
U/S
3/2/21

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಬಂಡೆಪ್ಪ ಖಾಶೆಂಪುರ್, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 578 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಬಂಡೆಪ್ಪ ಖಾಶೆಂಪುರ್, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 578 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Mala S 2/02/2021
(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 578

ಸದಸ್ಯರ ಹೆಸರು : ಶ್ರೀ ಬಂಡೆಪ್ಪ ಖಾಶೆಂಪುರ್ (ಬೀದರ್ ದಕ್ಷಿಣ)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 03-02-2021

ಕ್ರ ಸಂ	ಪ್ರಶ್ನೆ	ಉತ್ತರ
ಅ.	ಬೀದರ್ ದಕ್ಷಿಣ ಕ್ಷೇತ್ರದಲ್ಲಿರುವ ಸಾರಿಗೆ ಬಸ್ ನಿಲ್ದಾಣಗಳ ಸಂಖ್ಯೆ ಎಷ್ಟು ಹಾಗೂ ಸದರಿ ಬಸ್ ನಿಲ್ದಾಣಗಳು ಯಾವ ಸ್ಥಿತಿಯಲ್ಲಿವೆ; (ನಿಲ್ದಾಣಗಳ ವಿವರವಾದ ಮಾಹಿತಿಯನ್ನು ಒದಗಿಸುವುದು)	ಬೀದರ್ ದಕ್ಷಿಣ ಕ್ಷೇತ್ರದಲ್ಲಿರುವ 04 ಬಸ್ ನಿಲ್ದಾಣಗಳಿದ್ದು, ಅವುಗಳ ಸ್ಥಿತಿ ಈ ಕೆಳಗಿನಂತಿದೆ: ಮನ್ನಾ ಎಖ್ಖೇಳ್ಳಿ ಬಸ್ ನಿಲ್ದಾಣ, ಬಗದಲ್ ಮಿನಿ ಬಸ್ ನಿಲ್ದಾಣ, ನಿರ್ಣಾ ಮಿನಿ ಬಸ್ ನಿಲ್ದಾಣ ಹಾಗೂ ಭೀಮಲಖೇಡ ಬಸ್ ತಂಗುದಾಣಗಳು ಸುಸ್ಥಿತಿಯಲ್ಲಿದ್ದು, ಕಾರ್ಯಾಚರಣೆಯಲ್ಲಿವೆ.
ಆ.	ಕ್ಷೇತ್ರದಲ್ಲಿನ ಬಸ್ ನಿಲ್ದಾಣಗಳನ್ನು ಅಭಿವೃದ್ಧಿಪಡಿಸುವ ಅಥವಾ ಹೊಸ ಬಸ್ ನಿಲ್ದಾಣಗಳನ್ನು ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಕೋವಿಡ್-19ರ ಹಿನ್ನೆಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಹೊಸ ಕಾಮಗಾರಿಗಳ ಪ್ರಸ್ತಾವನೆಯಿರುವುದಿಲ್ಲ. 2021-22ನೇ ಸಾಲಿನಲ್ಲಿ ಒದಗಿಸಲಾಗುವ ಅನುದಾನಕ್ಕನುಗುಣವಾಗಿ ಹಾಗೂ ಸಂಸ್ಥೆಯ ನಿಯಮಾವಳಿಯಂತೆ ಬಸ್ ನಿಲ್ದಾಣ ನಿರ್ಮಿಸಲು, ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಪರಿಗಣಿಸಲಾಗುವುದು.
ಇ.	ಹಾಗಿದ್ದಲ್ಲಿ, ಸದರಿ ಬಸ್ ನಿಲ್ದಾಣಗಳನ್ನು ಅಭಿವೃದ್ಧಿಪಡಿಸಲು ಅಥವಾ ಹೊಸ ನಿಲ್ದಾಣಗಳನ್ನು ನಿರ್ಮಾಣ ಮಾಡಲು ಸ್ಥಳವನ್ನು ಗುರುತಿಸಲಾಗಿದೆಯೇ? (ವಿವರ ನೀಡುವುದು)	ಮನ್ನಳ್ಳಿ ಗ್ರಾಮದಲ್ಲಿ ಮಿನಿ ಬಸ್ ನಿಲ್ದಾಣ ನಿರ್ಮಿಸಲು ಸದರಿ ಗ್ರಾಮದ ಗೌಂಠಾಣ ಸರ್ವೆ ನಂ.: 78/1ರಲ್ಲಿನ 30 ಗುಂಟೆ ನಿವೇಶನವನ್ನು ಕಾಯ್ದಿರಿಸುವಂತೆ ಜಿಲ್ಲಾಧಿಕಾರಿಗಳು, ಬೀದರ್ ಇವರು ಆದೇಶಿಸಿರುತ್ತಾರೆ.

ಸಂಖ್ಯೆ: ಟಿಡಿ 18 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 10 ಎಎಫ್‌ಎಸ್ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 02-02-2021.

49 (41) 3/2/21

ಇವರಿಂದ,
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್,
ಬಹುಮಹಡಿಗಳ ಕಟ್ಟಡ,
ಬೆಂಗಳೂರು.

ಇವರಿಗೆ,
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ ಸಚಿವಾಲಯ,
ವಿಧಾನ ಸೌಧ, ಬೆಂಗಳೂರು.

ಮಾನ್ಯರೇ,

ವಿಷಯ : ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 575ಗೆ ಉತ್ತರ ಸಲ್ಲಿಸುವ ಬಗ್ಗೆ.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಭರತ್ ಶೆಟ್ಟಿ ವೈ. ಡಾ// (ಮಂಗಳೂರು ನಗರ ಉತ್ತರ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 575ರ (ಉತ್ತರಿಸಬೇಕಾದ ದಿನಾಂಕ: 03.02.2021) 25 ಉತ್ತರ ಪ್ರತಿಗಳನ್ನು (ಹಾರ್ಡ್ ಕಾಪಿ) ಇದರೊಂದಿಗೆ ಲಗತ್ತಿಸಿ ಹಾಗೂ ಇ-ಮೇಲ್ (dsqb-kla-kar@nic.in) ಮೂಲಕ ಕಳುಹಿಸಲಾಗಿದೆ, ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

ತಮ್ಮ ವಿಶ್ವಾಸಿ,

(ಮಹದೇವ)
ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಕರ್ನಾಟಕ ವಿಧಾನ ಸಭೆ
15ನೇ ವಿಧಾನ ಸಭೆ – 9ನೇ ಅಧಿವೇಶನ

ಕರ್ನಾಟಕ ವಿಧಾನ ಸಭೆ ಸದಸ್ಯರ ಹೆಸರು	:	**ಶ್ರೀ ಭರತ್ ಶೆಟ್ಟಿ ವೈ. ಡಾ॥ (ಮಂಗಳೂರು ನಗರ ಉತ್ತರ)**
ಚುಕ್ಕೆ ಗುರುತಿಲ್ಲದ ಪ್ರಶ್ನೆ	:	**575**
ಉತ್ತರಿಸಬೇಕಾದ ದಿನಾಂಕ	:	**03.02.2021**
ಉತ್ತರಿಸುವ ಸಚಿವರು	:	**ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.**

ಕ್ರಸಂ	ಪ್ರಶ್ನೆ	ಉತ್ತರ
ಅ)	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸದರಿ ವಿಧಾನಸಭಾ ಕ್ಷೇತ್ರಕ್ಕೆ ವಿವಿಧ ಯೋಜನೆಗಳಿಗೆ ಅನುದಾನವನ್ನು ಯಾವ ಮಾನದಂಡದ ಮೇಲೆ ಬಿಡುಗಡೆ ಮಾಡಲಾಗುವುದು; ಕಳೆದ ಮೂರು ವರ್ಷಗಳಿಂದ ಇದುವರೆಗೂ ಬಿಡುಗಡೆ ಮಾಡಿರುವ ಅನುದಾನವೆಷ್ಟು;	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸದರಿ ವಿಧಾನಸಭಾ ಕ್ಷೇತ್ರಕ್ಕೆ ವಿವಿಧ ಯೋಜನೆಗಳಿಗೆ ಅನುದಾನವನ್ನು ಯಾವ ಮಾನದಂಡದ ಮೇಲೆ ಹಾಗೂ ಕಳೆದ ಮೂರು ವರ್ಷಗಳಿಂದ ಇದುವರೆಗೂ ಬಿಡುಗಡೆ ಮಾಡಿರುವ ಅನುದಾನದ ಮಾಹಿತಿಯನ್ನು ಅನುಬಂಧ–ಎ ರಲ್ಲಿ ಲಗತ್ತಿಸಿದೆ.
ಆ)	ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಬಿ.ಆರ್.ಜಿ.ಎಫ್ ಬಿಡುಗಡೆಯಾಗಿರುವ ಅನುದಾನವೆಷ್ಟು;	ಈ ಯೋಜನೆ ದಕ್ಷಿಣ ಕ್ನನಡ ಅನ್ವಯಿಸುವುದಿಲ್ಲ.
ಇ)	ಮಂಗಳೂರು ನಗರ ಉತ್ತರ ವಿಧಾನ ಸಭಾ ಕ್ಷೇತ್ರಕ್ಕೆ ಬಿಡುಗಡೆಯಾದ ಮತ್ತು ಬಾಕಿ ಉಳಿದಿರುವ ಅನುದಾನವೆಷ್ಟು;	ಅನುಬಂಧ–ಎ ಮತ್ತು ಅನುಬಂಧ–ಬಿ ಯಲ್ಲಿ ಪ್ರತ್ಯೇಕವಾಗಿ ಲಗತ್ತಿಸಿದೆ.

ಸಂಖ್ಯೆ: ಗ್ರಾಅಪ 10 ಎಎಫ್ಎನ್ 2021

(ಕೆ.ಎಸ್ ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ,
ಸಚಿವರು.

ಕೆ.ಎಸ್. . .
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: MWD 21 LMQ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 02-02-2021.

ಇವರಿಂದ,
ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

ಇವರಿಗೆ,
ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ
ಬೆಂಗಳೂರು.

120
3/2/21

ಮಾನ್ಯರೇ.

ವಿಷಯ : ಶ್ರೀ ರಘುಮೂರ್ತಿ ಟಿ. (ಚಳ್ಳಕೆರೆ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 766 ಉತ್ತರಿಸುವ ಬಗ್ಗೆ.

*****

ಶ್ರೀ ರಘುಮೂರ್ತಿ ಟಿ. (ಚಳ್ಳಕೆರೆ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 766 ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಗೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ

ತಮ್ಮ ವಿಶ್ವಾಸಿ,

(ಎಸ್.ಎಜಾಸ್ ಪಾಷ)
ಶಾಖಾಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	– 766
ಉತ್ತರಿಸಬೇಕಾದ ದಿನಾಂಕ	– 03-02-2021
ಸದಸ್ಯರ ಹೆಸರು	– ಶ್ರೀ. ರಘುಮೂರ್ತಿ ಟಿ. (ಚಳ್ಳಕೆರೆ)
ಉತ್ತರಿಸುವ ಸಚಿವರು	– ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ 3 ವರ್ಷಗಳಲ್ಲಿ ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ವಿಧಾನಸಭಾ ಕ್ಷೇತ್ರಕ್ಕೆ ಅಲ್ಪಸಂಖ್ಯಾತ ಕಾಲೋನಿಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ನೀಡಿರುವ ಅನುದಾನ ಎಷ್ಟು; (ಸಂಪೂರ್ಣ ವಿವರ ನೀಡುವುದು)</td><td>ಕಳೆದ 3 ವರ್ಷಗಳಲ್ಲಿ ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ವಿಧಾನಸಭಾ ಕ್ಷೇತ್ರಕ್ಕೆ ಅಲ್ಪಸಂಖ್ಯಾತ ಕಾಲೋನಿ ಕಾಮಗಾರಿಗಳಿಗೆ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿದೆ. ಸಂಪೂರ್ಣ ವಿವರ ಅನುಬಂಧ-1 ರಲ್ಲಿ ಒದಗಿಸಲಾಗಿದೆ.</td></tr>
<tr><td>ಆ)</td><td>ರಾಜ್ಯದಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಕಳೆದ 3 ವರ್ಷಗಳಲ್ಲಿ ಬಿಡುಗಡೆ ಮಾಡಿರುವ ವಿದ್ಯಾರ್ಥಿ ವೇತನ ಎಷ್ಟು;</td><td>ರಾಜ್ಯದಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಕಳೆದ 3 ವರ್ಷಗಳಲ್ಲಿ ಬಿಡುಗಡೆ ಮಾಡಿರುವ ವಿದ್ಯಾರ್ಥಿವೇತನದ ವಿವರ ಈ ಕೆಳಕಂಡಂತಿದೆ.
(ರೂ. ಕೋಟಿಗಳಲ್ಲಿ)
<table>
<tr><th>ವರ್ಷ</th><th>ಅನುದಾನ</th></tr>
<tr><td>2017-18</td><td>281.77</td></tr>
<tr><td>2018-19</td><td>286.44</td></tr>
<tr><td>2019-20</td><td>32.54</td></tr>
<tr><td>2020-21</td><td>100.00</td></tr>
</table></td></tr>
<tr><td>ಇ)</td><td>ಬಿಡುಗಡೆ ಮಾಡಿದ್ದರೆ ಪೂರ್ಣ ಪ್ರಮಾಣದಲ್ಲಿ ಬಿಡುಗಡೆಯಾಗಿದೆಯೇ ಮತ್ತು ಬಾಕಿ ಇದ್ದರೆ ಬಿಡುಗಡೆ ಮಾಡಲಾಗುವುದು; (ವಿವರ ನೀಡುವುದು)</td><td>ವಿದ್ಯಾರ್ಥಿವೇತನ ಬಿಡುಗಡೆ ಮಾಡಲು ಬಾಕಿ ಇರುವುದಿಲ್ಲ.</td></tr>
<tr><td>ಈ)</td><td>ರಾಜ್ಯದಲ್ಲಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು;</td><td>ರಾಜ್ಯದಾದ್ಯಂತ ಒಟ್ಟು 304 ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ.</td></tr>
<tr><td>ಉ)</td><td>ಈ ವಿದ್ಯಾರ್ಥಿ ನಿಲಯಗಳಲ್ಲಿ ಸ್ವಂತ ಕಟ್ಟಡಗಳು ಮತ್ತು ಬಾಡಿಗೆ ಕಟ್ಟಡಗಳಲ್ಲಿ ನಡೆಸಲಾಗುತ್ತಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)</td><td>ಸದರಿ ವಿದ್ಯಾರ್ಥಿನಿಲಯಗಳಲ್ಲಿ 219 ಸ್ವಂತ ಕಟ್ಟಡಗಳು ಹಾಗೂ 85 ಬಾಡಿಗೆ ಕಟ್ಟಡಗಳಲ್ಲಿ ನಡೆಸಲಾಗುತ್ತಿದೆ.
ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-2 ರಲ್ಲಿ ಒದಗಿಸಲಾಗಿದೆ.</td></tr>
</table>

ಊ)	ರಾಜ್ಯದ ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಅದರಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;	2019-20ರಲ್ಲಿ ರಾಜ್ಯದ ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರು' ವಿದ್ಯಾರ್ಥಿಗಳ ಸಂಖ್ಯೆ: 16896 ಅದರಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿರುವ ವಿದ್ಯಾರ್ಥಿಗಳು 428. 2020-21ನೇ ಸಾಲಿನಲ್ಲಿ ಕೋವಿಡ್ ಕಾರಣಾಂತರಗಳಿಂದ ಕಡಿಮೆ ದಾಖಲಾತಿಯಾಗಿದ್ದು, ರಾಜ್ಯದ ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ:9744. ಚಿತ್ರದುರ್ಗ ಜಿಲ್ಲೆಯ ವಿದ್ಯಾರ್ಥಿನಿಲಯಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ: 256.
ಋ)	ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಹೊರ ದೇಶಗಳಲ್ಲಿ ಉನ್ನತ ವ್ಯಾಸಂಗಕ್ಕೆ ನೀಡುವ ವಿದ್ಯಾರ್ಥಿ ವೇತನದ ಮೊತ್ತ ಎಷ್ಟು?	ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಹೊರ ದೇಶಗಳಲ್ಲಿ ಉನ್ನತ ವ್ಯಾಸಂಗಕ್ಕೆ ನೀಡುವ ವಿದ್ಯಾರ್ಥಿವೇತನವನ್ನು ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯವು ರೂ.6.00 ಲಕ್ಷಗಳವರೆಗೆ ಒಳಗಿದ್ದಲ್ಲಿ ರೂ.20.00 ಲಕ್ಷಗಳ ಮಿತಿಯಲ್ಲಿ ಪ್ರಥಮ ಆದ್ಯತೆ ನೀಡಲಾಗುವುದು ಹಾಗೂ ಪೋಷಕರ ವಾರ್ಷಿಕ ಆದಾಯವು ರೂ.6.00 ಲಕ್ಷದಿಂದ ರೂ.15.00 ಲಕ್ಷಗಳ ಒಳಗಿದ್ದಲ್ಲಿ, ರೂ.10.00 ಲಕ್ಷಗಳ ಗರಿಷ್ಠ ಮಿತಿಯಲ್ಲಿ ಶೇ.50% ರಷ್ಟು ವಿದ್ಯಾರ್ಥಿವೇತನವನ್ನು ನೀಡಲಾಗುತ್ತದೆ.

ಸಂಖ್ಯೆ:MWD 21 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪಂರಾ 41 ಜಿಪಸ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:01-02-2021

14
U/S
03/2/21

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಇವರಿಗೆ:

ಕಾರ್ಯದರ್ಶಿಗಳು,
ವಿಧಾನ ಸಭೆ
ವಿಧಾನ ಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಅಜಯ್ ಧರ್ಮಸಿಂಗ್ ಡಾ|| (ಜೇವರ್ಗಿ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:(660)ಗೆ ಉತ್ತರ ಸಲ್ಲಿಸುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಅಜಯ್ ಧರ್ಮಸಿಂಗ್ ಡಾ|| (ಜೇವರ್ಗಿ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:(660)ಗೆ ಸಂಬಂಧಿಸಿದಂತೆ ಉತ್ತರದ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ತಮಗೆ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

B. Naveenkumar 01/02/21
(ಬಿ. ನವೀನ್ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 660

ವಿಧಾನ ಸಭೆಯ ಸದಸ್ಯರ ಹೆಸರು : ಶ್ರೀ ಅಜಯ್ ಧರ್ಮಸಿಂಗ್ ಡಾ|| (ಜೇವರ್ಗಿ)

ಉತ್ತರಿಸುವ ದಿನಾಂಕ : 03-02-2021

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರ
(ಅ)	ರಾಜ್ಯದಲ್ಲಿ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯತಿಗಳಿಗೆ ಒಂದೇ ಬಾರಿ ಚುನಾವಣೆ ನಡೆಸುವ ಪ್ರಕ್ರಿಯೆಗೆ ಸರ್ಕಾರ ಕ್ರಮ ಕೈಗೊಳ್ಳಲು ಉದ್ದೇಶಿಸಿದೆಯೇ;	ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದಲ್ಲಿ ಇರುವುದಿಲ್ಲ.
(ಆ)	ಸದರಿ ಸ್ಥಳೀಯ ಸಂಸ್ಥೆಗಳಿಗೆ ಏಕ ಕಾಲದಲ್ಲಿ ಚುನಾವಣೆ ನಡೆಸಿದ್ದಲ್ಲಿ, ರಾಜ್ಯದ ಅಭಿವೃದ್ಧಿಗೆ ಹಾಗೂ ಆರ್ಥಿಕ ವೆಚ್ಚವನ್ನು ಕಡಿಮೆಗೊಳಿಸುವಲ್ಲಿ ಸಹಕಾರಿಯಾಗಿರುವುದರ ಬಗ್ಗೆ ಸರ್ಕಾರ ಚಿಂತನೆ ನಡೆಸುವುದೇ?	ಉದ್ಭವಿಸುವುದಿಲ್ಲ.

ಸಂಖ್ಯೆ:ಗ್ರಾಅಪಂರಾ 41 ಜಿಪಸ 2021

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕೆ. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಆಯುಕ್ತರವರ ಕಛೇರಿ, ಗ್ರಾ.ಕುನೀ.&.ನೈ.ಇ., 2ನೇ ಮಹಡಿ, "ಇ" ಬ್ಲಾಕ್, ಕೆಹೆಚ್‌ಬಿ ಕಟ್ಟಡ,
ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು–560009. ☎:080–22240508 📠:22240509
ಇ–ಮೇಲ್: krwssd@gmail.com

ಸಂ:ಗ್ರಾಕುನೀ&ನೈಇ/144/ಗ್ರಾನೀಸ(4)2020 ದಿನಾಂಕ:02.02.2021.

103
LWS
3/2/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು–01.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ **ನಾಗೇಶ್ ಬಿ.ಸಿ.(ತಿಪಟೂರು)** ಇವರ **ಚುಕ್ಕೆ ರಹಿತ ಪ್ರಶ್ನೆ ಸಂ:734ಕ್ಕೆ** ಸಂಬಂಧಿಸಿದ ಮೇಲಿನ ಕ್ರಮ/ವಾಸ್ತವಿಕ ವರದಿಯ ಉತ್ತರ ನೀಡುವ ಬಗ್ಗೆ.

******

ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ **ನಾಗೇಶ್ ಬಿ.ಸಿ.(ತಿಪಟೂರು)** ಇವರ **ಚುಕ್ಕೆ ರಹಿತ ಪ್ರಶ್ನೆ ಸಂ:734ಕ್ಕೆ** ಉತ್ತರದ **25** ಪ್ರತಿಗಳನ್ನು ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ತಮ್ಮ ವಿಶ್ವಾಸಿ,
02/2/2021
ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

<u>ಪ್ರತಿಯನ್ನು:</u>
1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರಿಗೆ

ಕರ್ನಾಟಕ ವಿಧಾನಸಭೆ

ಸದಸ್ಯರ ಹೆಸರು : ಶ್ರೀ ನಾಗೇಶ್ ಬಿ.ಸಿ (ತಿಪಟೂರು)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 734

ಉತ್ತರ ದಿನಾಂಕ : 03.02.2021

ಕ್ರ.ಸಂ	ಪ್ರಶ್ನೆ	ಉತ್ತರಗಳು
ಅ)	ರಾಜ್ಯದಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು; ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು;	ರಾಜ್ಯದಲ್ಲಿ ಒಟ್ಟು 18728 ಶುದ್ಧ ಕುಡಿಯುವ ನೀರಿನ ಘಟಕಗಳಿದ್ದು, ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿಯನ್ನು **ಅನುಬಂಧ–1**ರಲ್ಲಿ ಲಗತ್ತಿಸಿದೆ.
ಆ)	ತುಮಕೂರು ಜಿಲ್ಲೆಗೆ ಎಷ್ಟು ನೀರಿನ ಘಟಕಗಳು ಮಂಜೂರಾಗಿರುತ್ತವೆ; ಎಷ್ಟು ಪೂರ್ಣಗೊಂಡಿವೆ; (ತಾಲ್ಲೂಕುವಾರು ಮಾಹಿತಿ ನೀಡುವುದು)	ತುಮಕೂರು ಜಿಲ್ಲೆಯಲ್ಲಿ ಒಟ್ಟು 1525 ಘಟಕಗಳು ಮಂಜೂರಾಗಿದ್ದು, 1508 ಘಟಕಗಳು ಪೂರ್ಣಗೊಂಡಿವೆ. ತಾಲ್ಲೂಕುವಾರು ವಿವರ **ಅನುಬಂಧ–2** ರಲ್ಲಿ ಲಗತ್ತಿಸಲಾಗಿದೆ.
ಇ)	ಜಿಲ್ಲೆಯಲ್ಲಿ ಅಪೂರ್ಣಗೊಂಡಿರುವ ಘಟಕಗಳನ್ನು ಯಾವಾಗ ಎಂದು ಪೂರ್ಣಗೊಳಿಸಲಾಗುವುದು; ಅಪೂರ್ಣಗೊಂಡಿರುವ ಘಟಕಗಳನ್ನು ಪೂರ್ಣಗೊಳಿಸಲು ತೆಗೆದುಕೊಂಡಿರುವ ಕ್ರಮಗಳೇನು (ವಿವರ ಒದಗಿಸುವುದು);	ಪ್ರಸ್ತುತ ಜಿಲ್ಲೆಯಲ್ಲಿ 88 ಘಟಕಗಳು ತಾತ್ಕಾಲಿಕವಾಗಿ ದುರಸ್ಥಿಯಲ್ಲಿದ್ದು, 6 ಘಟಕಗಳು ಪ್ರಗತಿಯಲ್ಲಿದ್ದು, 1 ಘಟಕವು Trial runನಲ್ಲಿರುತ್ತದೆ. ಪ್ರಗತಿಯಲ್ಲಿರುವ 6 ಘಟಕಗಳನ್ನು ಶೀಘ್ರವೇ ಪೂರ್ಣಗೊಳಿಸಲು ಕ್ರಮ ಜರುಗಿಸಲಾಗಿದೆ.
ಈ)	ಜಿಲ್ಲೆಯಲ್ಲಿ ದುರಸ್ತಿಯಲ್ಲಿರುವ ಘಟಕಗಳ ಸಂಖ್ಯೆ ಎಷ್ಟು; ಇವುಗಳ ದುರಸ್ತಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; ಘಟಕಗಳ ನಿರ್ವಹಣೆ ಅವಧಿ ಮುಗಿದಿದೆಯೇ (ಘಟಕವಾರು ವಿವರ ಒದಗಿಸುವುದು)	ತುಮಕೂರು ಜಿಲ್ಲೆಯಲ್ಲಿ ಒಟ್ಟು 88 ಶುದ್ಧ ಕುಡಿಯುವ ನೀರಿನ ಘಟಕಗಳು ದುರಸ್ಥಿಯಲ್ಲಿದ್ದು, ವಿವಿಧ ಏಜೆನ್ಸಿಗಳಿಗೆ 5 ವರ್ಷಗಳಿಗೆ ನಿರ್ವಹಣೆಗಾಗಿ ಟೆಂಡರ್ ಕರಾರು ಮಾಡಿಕೊಳ್ಳಲಾಗಿರುತ್ತದೆ. ಸದರಿ ಘಟಕಗಳು ಸದ್ಯ ನಿರ್ವಹಣೆ ಅವಧಿಯಲ್ಲಿದ್ದು, ಸಂಬಂಧಪಟ್ಟ ಏಜೆನ್ಸಿಗಳವರಿಂದ ದುರಸ್ಥಿಗಾಗಿ ಕ್ರಮಕೈಗೊಳ್ಳಲಾಗುತ್ತಿದೆ. ಎಲ್ಲಾ ಘಟಕಗಳು DLP ಅವಧಿಯೊಳಗಿರುತ್ತವೆ. ಘಟಕವಾರು ವಿವರ **ಅನುಬಂಧ–3**ರಲ್ಲಿ ಲಗತ್ತಿಸಿದೆ.

ಸಂ:ಗ್ರಾಕುನೀ&ನೈಇ 144 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: CI 10 JAKE 2021
ಲಗತ್ತು

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು ದಿನಾಂಕ:02.02.2021

121
U/S
03/02/2021

ಇವರಿಂದ
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಎಂ.ಎಸ್.ಎಂ.ಇ & ಗಣಿ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ,
ಬೆಂಗಳೂರು.

ಇವರಿಗೆ,
ಕಾರ್ಯದರ್ಶಿ(ಪ್ರ),
ಕರ್ನಾಟಕ ವಿಧಾನ ಸಭೆ ಸಚಿವಾಲಯ,
ವಿಧಾನ ಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ರಾಜೀವ್ ಪಿ. (ಕುಡಚಿ) ಇವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:664ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.664/2021, ದಿನಾಂಕ:23.01.2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಕೋರಿರುವಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ರಾಜೀವ್ ಪಿ. (ಕುಡಚಿ) ಇವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:664ಕ್ಕೆ ಸಂಬಂಧಿಸಿದ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ತಮಗೆ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,
G.N. Dhanalakshmi
(ಜಿ. ಎನ್. ಧನಲಕ್ಷ್ಮಿ)
ಪೀಠಾಧಿಕಾರಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ(ಜವಳಿ)

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ರಾಜೀವ್ ಪಿ. (ಕುಡಚಿ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 664
ಉತ್ತರಿಸುವ ಸಚಿವರು : ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು
ಉತ್ತರಿಸಬೇಕಾದ ದಿನಾಂಕ : 03-02-2021

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಕೈಮಗ್ಗ ಮತ್ತು ಜವಳಿ ಇಲಾಖೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ರೂ.25.00 ಲಕ್ಷಗಳಿಂದ ರೂ.5.00 ಕೋಟಿಗಳವರೆಗೆ ಜವಳಿಯಾಧಾರಿತ ಘಟಕಗಳನ್ನು ಸ್ಥಾಪಿಸಲು ಶೇ.75 ಬಂಡವಾಳ ಸಹಾಯಧನ ಮತ್ತು ಶೇ.15 ಬಡ್ಡಿ ಸಹಾಯಧನ ನೀಡುವ ಯೋಜನೆಯಲ್ಲಿದೆಯೇ;	ಹೌದು
ಆ)	ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಿಂದ ಇದುವರೆಗೂ ರಾಜ್ಯದಾದ್ಯಂತ ಎಷ್ಟು ಉದ್ದಿಮೆದಾರರಿಗೆ ಮಂಜೂರು ಮಾಡಿ ಹಣ ಬಿಡುಗಡೆ ಮಾಡಲಾಗಿದೆ (ಪೂರ್ಣ ಮಾಹಿತಿಯೊಂದಿಗೆ ವಿವರ ನೀಡುವುದು);	ವಿವರಗಳನ್ನು ಅನುಬಂಧದಲ್ಲಿ ಒದಗಿಸಿದೆ.
ಇ)	ಪ್ರಸ್ತುತ ಈ ಯೋಜನೆಯನ್ನು ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು
ಈ)	ಬಂದಿದ್ದಲ್ಲಿ, ಇಂತಹ ಉತ್ತಮವಾದ ಕಾರ್ಯ ಕ್ರಮವನ್ನು ತಡೆಹಿಡಿದಿರುವುದಕ್ಕೆ ಕಾರಣವೇನು;	ಸದರಿ ಯೋಜನೆಯನ್ನು ರಾಜ್ಯ ಅನುಸೂಚಿತ ಜಾತಿಗಳು/ ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ ಸಭೆಯಲ್ಲಿ ಅನುಮೋದಿಸಿರುವ ಪ್ರಕಾರ ಮತ್ತು ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ಮಿತಿಯೊಳಗೆ ಅನುಷ್ಠಾನ ಗೊಳಿಸಲು ಆರ್ಥಿಕ ಇಲಾಖೆಯು ತಿಳಿಸಿರುವುದರಿಂದ ಈ ವಿಷಯದ ಕುರಿತು ಸರ್ಕಾರದ ಅಂತಿಮ ತೀರ್ಮಾನ ತೆಗೆದುಕೊಳ್ಳುವ ತನಕ ಯಾವುದೇ ಹೊಸ ಪ್ರಸ್ತಾವನೆಗಳಿಗೆ ಮಂಜೂರಾತಿ ನೀಡಬಾರದೆಂದು ತಾತ್ಕಾಲಿಕವಾಗಿ ತೀರ್ಮಾನಿಸಲಾಗಿರುತ್ತದೆ.
ಉ)	ತಡೆಹಿಡಿದಿರುವ ಈ ಯೋಜನೆಯನ್ನು ಯಾವ ಕಾಲಮಿತಿಯೊಳಗೆ ಮತ್ತೆ ಪುನಃರಾರಂಭಿಸಲು ಸರ್ಕಾರ ಉದ್ದೇಶಿಸಿದೆ?	ಆರ್ಥಿಕ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಗಳೊಂದಿಗೆ ಸಮಾಲೋಚಿಸಿ ಸಚಿವ ಸಂಪುಟದ ಅನುಮೋದನೆಯ ನಂತರ ಪುನರಾರಂಭಿಸಲಾಗುವುದು.

ಸಂಖ್ಯೆ: CI 10 JAKE 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕರ್ನಾಟಕ ಸರ್ಕಾರ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಆಯುಕ್ತರವರ ಕಛೇರಿ, ಗ್ರಾ.ಕುನೀ.&.ನೈ.ಇ., 2ನೇ ಮಹಡಿ, "ಇ" ಬ್ಲಾಕ್, ಕೆಹೆಚ್‌ಬಿ ಕಟ್ಟಡ,
ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009. ☎:080-22240508 📠:22240509
ಇ-ಮೇಲ್: krwssd@gmail.com

ಸಂ:ಗ್ರಾಕುನೀ&ನೈಇ/131/ಗ್ರಾನೀಸ(4)2020

ದಿನಾಂಕ:02.02.2021.

93
4LS
3/2/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು-01.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಮಸಾಲ ಜಯರಾಮ್ (ತುರುವೇಕೆರೆ) ಇವರ ಚುಕ್ಕೆ ರಹಿತ ಪ್ರಶ್ನೆ ಸಂ:360ಕ್ಕೆ ಸಂಬಂಧಿಸಿದ ಮೇಲಿನ ಕ್ರಮ/ವಾಸ್ತವಿಕ ವರದಿಯ ಉತ್ತರ ನೀಡುವ ಬಗ್ಗೆ.

******

ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಮಸಾಲ ಜಯರಾಮ್ (ತುರುವೇಕೆರೆ) ಇವರ ಚುಕ್ಕೆ ರಹಿತ ಪ್ರಶ್ನೆ ಸಂ:360ಕ್ಕೆ ಉತ್ತರದ 25 ಪ್ರತಿಗಳನ್ನು ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ತಮ್ಮ ವಿಶ್ವಾಸಿ,
02/02/2021
ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಪ್ರತಿಯನ್ನು:
1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರಿಗೆ

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ಮಸಾಲ ಜಯರಾಮ್ (ತುರುವೇಕೆರೆ)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 360

ಉತ್ತರ ದಿನಾಂಕ : 03.02.2021

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರಗಳು</th></tr>
<tr><td>ಅ)</td><td>ತುಮಕೂರು ಜಿಲ್ಲೆಯಲ್ಲಿ ಕಳೆದ 3 ವರ್ಷಗಳಿಂದ ನಿರ್ಮಾಣವಾಗಿರುವ ಗ್ರಾಮೀಣ ಕುಡಿಯುವ ನೀರಿನ ಯೋಜನೆಯಡಿ ನಿರ್ಮಿಸಿರುವ ಓವರ್‌ಹೆಡ್ ಟ್ಯಾಂಕ್‌ಗಳ ಸಂಖ್ಯೆ ಎಷ್ಟು; ಬಿಡುಗಡೆಯಾಗಿರುವ ಒಟ್ಟಾರೆ ಅನುದಾನವೆಷ್ಟು ಹಾಗೂ ಖರ್ಚಾಗಿರುವ ಅನುದಾನದ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿವೆ; (ತಾಲ್ಲೂಕುವಾರು ಹಾಗೂ ಗ್ರಾಮವಾರು ಸಂಪೂರ್ಣ ಮಾಹಿತಿ ನೀಡುವುದು)</td><td>ತುಮಕೂರು ಜಿಲ್ಲೆಯಲ್ಲಿ ಕಳೆದ 3 ವರ್ಷಗಳಿಂದ ಕುಡಿಯುವ ನೀರಿಗೆ ನಿರ್ಮಿಸಿರುವ ಓ.ಹೆಚ್.ಟಿಗಳ ವಿವರ:
(ರೂ.ಲಕ್ಷಗಳಲ್ಲಿ)
<table>
<tr><th>ಕ್ರ.ಸಂ</th><th>ವರ್ಷ</th><th>ನಿರ್ಮಿಸಿರುವ ಓ.ಹೆಚ್.ಟಿಗಳು</th><th>ಅಂದಾಜು ಮೊತ್ತ</th><th>ಬಿಡುಗಡೆಯಾದ ಅನುದಾನ</th><th>ವೆಚ್ಚ</th></tr>
<tr><td>1</td><td>2017-18</td><td>34</td><td>849.50</td><td>728.58</td><td>728.58</td></tr>
<tr><td>2</td><td>2018-19</td><td>31</td><td>670.70</td><td>543.83</td><td>543.83</td></tr>
<tr><td>3</td><td>2019-20</td><td>37</td><td>840.20</td><td>672.92</td><td>672.92</td></tr>
<tr><td colspan="2">ಒಟ್ಟು</td><td>102</td><td>2360.40</td><td>1945.33</td><td>1945.33</td></tr>
</table>
ತಾಲ್ಲೂಕುವಾರು ಹಾಗೂ ಗ್ರಾಮವಾರು ವಿವರಗಳನ್ನು ಅನುಬಂಧದಲ್ಲಿ ಲಗತ್ತಿಸಲಾಗಿದೆ.</td></tr>
<tr><td>ಆ)</td><td>ಓವರ್‌ಹೆಡ್ ಟ್ಯಾಂಕ್ ನಿರ್ಮಾಣ ಕಾಮಗಾರಿಯು ಕಳಪೆ ಕಾಮಗಾರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಕಾರಣವಾದವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು;</td><td>ತುಮಕೂರು ಜಿಲ್ಲೆಯಲ್ಲಿ ನಿರ್ಮಿಸಿರುವ ಓವರ್ ಹೆಡ್ ಟ್ಯಾಂಕ್ ಕಾಮಗಾರಿಗಳು ಕಳಪೆಯಾಗಿರುವುದು ಕಂಡು ಬಂದಿರುವುದಿಲ್ಲ.</td></tr>
<tr><td>ಇ)</td><td>ಇದುವರೆವಿಗೂ ಸಂಪರ್ಕ ಹೊಂದಿರುವ ಓವರ್‌ಹೆಡ್ ಟ್ಯಾಂಕ್‌ಗಳ ಸಂಖ್ಯೆಗಳು ಹಾಗೂ ಸಂಪರ್ಕ ಹೊಂದಿರದ ಮತ್ತು ಬಾಕಿ ಇರುವ ಕಾಮಗಾರಿಗಳೆಷ್ಟು ಹಾಗೂ ವಿಳಂಬಕ್ಕೆ ಕಾರಣವೇನು? (ಸಂಪೂರ್ಣ ಮಾಹಿತಿ ನೀಡುವುದು).</td><td>ತುಮಕೂರು ಜಿಲ್ಲೆಯಲ್ಲಿ ಕಳೆದ 03 ವರ್ಷಗಳಲ್ಲಿ 102 ಓವರ್ ಹೆಡ್ ಟ್ಯಾಂಕ್‌ಗಳನ್ನು ನಿರ್ಮಿಸಲಾಗಿದ್ದು ಇವುಗಳಲ್ಲಿ 102 ಓವರ್ ಹೆಡ್ ಟ್ಯಾಂಕ್‌ಗಳಿಗೂ ಪೈಪ್‌ಲೈನ್ ಅಳವಡಿಸಿ ಸಂಪರ್ಕ ಕಲ್ಪಿಸಲಾಗಿದ್ದು ಯೋಜನೆಯನ್ನು ಪೂರ್ಣಗೊಳಿಸಿ ಸಾರ್ವಜನಿಕರಿಗೆ ನೀರು ವಿತರಣೆಗಾಗಿ ಹಾಗೂ ಯೋಜನೆಯ ನಿರ್ವಹಣೆಗಾಗಿ ಗ್ರಾಮ ಪಂಚಾಯತ್‌ಗಳಿಗೆ ಹಸ್ತಾಂತರಿಸಲಾಗಿರುತ್ತದೆ.

ಕಳೆದ 03 ವರ್ಷಗಳಲ್ಲಿ ನಿರ್ಮಿಸಿರುವ ಓವರ್ ಹೆಡ್ ಟ್ಯಾಂಕ್‌ಗಳಿಗೆ ಪೈಪ್‌ಲೈನ್ ಸಂಪರ್ಕ ಕಲ್ಪಿಸದೇ ಇರುವ ಯಾವುದೇ ಪ್ರಕರಣ ಇರುವುದಿಲ್ಲ.</td></tr>
</table>

ಸಂ:ಗ್ರಾಕುನೀ&ನೈಇ 131 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:01/1:ಆರ್‌ಆರ್‌ಸಿ:2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,ಬೆಂಗಳೂರು
ದಿನಾಂಕ:02.02.2021.

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

134
U/S
03/2/21

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ ಸಚಿವಾಲಯ,
ವಿಧಾನ ಸೌಧ, ಬೆಂಗಳೂರು.

ಮಾನ್ಯರೇ,

H.D. ರೇವಣ್ಣ
(ಹೊಳೆನರಸೀಪುರ)

ವಿಷಯ: ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 725 ಗೆ ಉತ್ತರವನ್ನು ಒದಗಿಸುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 725 ಗೆ ಉತ್ತರವನ್ನು ಸಿದ್ಧಪಡಿಸಿ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

(ರಮೇಶ್ ಎ.ಓ)
ಉಪ ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ:	725
ಸದಸ್ಯರ ಹೆಸರು	ಶ್ರೀ ರೇವಣ್ಣ ಹೆಚ್.ಡಿ (ಹೊಳೆನರಸೀಪುರ)
ಉತ್ತರಿಸಬೇಕಾದ ದಿನಾಂಕ:	03.02.2021

<table>
<tr><th>ಕ್ರ. ಸಂ.</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ</td><td>ಹೊಳೆನರಸೀಪುರ ವಿಧಾನಸಭಾ ಕ್ಷೇತ್ರದಲ್ಲಿ 2020-21ನೇ ಸಾಲಿನಲ್ಲಿ ಸುರಿದ ಭಾರಿ ಮಳೆಯಿಂದ ಬಹುತೇಕ ಗ್ರಾಮೀಣ ರಸ್ತೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸಂಪೂರ್ಣ ಮಾಹಿತಿ ನೀಡುವುದು;</td><td>ಬಂದಿದೆ.

ಹೊಳೆನರಸೀಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಭಾರಿ ಮಳೆಯಿಂದ 24 ರಸ್ತೆಗಳು ಹಾಳಾಗಿದ್ದು ವಿವರಗಳನ್ನು ಅನುಬಂಧ -1 ರಲ್ಲಿ ಲಗತ್ತಿಸಿದೆ.</td></tr>
<tr><td>ಆ</td><td>ಹೊಳೇನರಸೀಪುರ ತಾಲ್ಲೂಕಿನ ಎರಡು ಬದಿಯಲ್ಲಿ ಹೇಮಾವತಿ ನದಿ ಹರಿಯುತ್ತಿದ್ದು, 2020-21ನೇ ಸಾಲಿನಲ್ಲಿ ಸುರಿದ ಭಾರಿ ಮಳೆಯಿಂದ ಹಲವು ಗ್ರಾಮೀಣ ರಸ್ತೆಗಳು ಮುಳುಗಡೆಗೊಂಡು ಸಂಪೂರ್ಣ ಹಾಳಾಗಿರುವ ರಸ್ತೆಗಳನ್ನು ಮರುಸ್ಥಾಪಿಸಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)</td><td>• 2020-21ನೇ ಸಾಲಿನಲ್ಲಿ ಹೊಳೆನರಸೀಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಭಾರಿ ಮಳೆಯಿಂದ ಹಾನಿಗೊಳಗಾದ ಒಟ್ಟು 121.00 ಕಿಮೀ ಉದ್ದದ ರಸ್ತೆಗಳನ್ನು ರೂ. 84.00 ಲಕ್ಷಗಳಲ್ಲಿ ಅಭಿವೃದ್ಧಿ ಪಡಿಸುವ ಪ್ರಸ್ತಾವನೆಗೆ ಅನುದಾನ ಒದಗಿಸುವಂತೆ ಕೋರಿ ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಗೆ ವರದಿಯನ್ನು ಮಾಡಲಾಗಿದೆ.</td></tr>
<tr><td>ಇ</td><td>ಹಾಸನ ಜಿಲ್ಲೆಯ ಹೊಳೆನರಸೀಪುರ ವಿಧಾನಸಭಾ ಕ್ಷೇತ್ರದಲ್ಲಿನ ಗ್ರಾಮೀಣ ಪ್ರದೇಶದಲ್ಲಿ ಜನರು ಕೃಷಿ ಉದ್ಯಮವನೇ ಅವಲಂಬಿಸಿದ್ದು, ರೈತರು ಬೆಳೆದ ದವಸಧಾನ್ಯವನ್ನು ಮಾರುಕಟ್ಟೆಗೆ ಕೊಂಡೆಯ್ಯಲು ಗ್ರಾಮೀಣ ರಸ್ತೆಗಳು ಬಹುಮುಖ್ಯವಾದುದರಿಂದ, ಗ್ರಾಮೀಣ ರಸ್ತೆಗಳ ಅಭಿವೃದ್ಧಿ ಅನುದಾನ ಒದಗಿಸುವುದು ಅವಶ್ಯಕವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಹಾಗಿದ್ದಲ್ಲಿ, ಗ್ರಾಮೀಣ ರಸ್ತೆಗಳ ಅಭಿವೃದ್ಧಿಗಾಗಿ ಹೆಚ್ಚಿನ ಅನುದಾನ ಒದಗಿಸಲು ತೆಗೆದುಕೊಂಡಿರುವ ಕ್ರಮಗಳ</td><td>ಬಂದಿರುತ್ತದೆ.

ಹೊಳೆನರಸೀಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಕೆಳಕಂಡಂತೆ ಅನುದಾನವನ್ನು ಮಂಜೂರಾತಿ ನೀಡಿ ಬಿಡುಗಡೆ ಮಾಡಲಾಗಿರುತ್ತದೆ.

(ರೂ. ಲಕ್ಷಗಳಲ್ಲಿ)
<table>
<tr><th>ಕ್ರ. ಸಂ.</th><th>ವರ್ಷ</th><th>ಯೋಜನೆ</th><th>ಮಂಜೂರಾತಿ</th><th>ಬಿಡುಗಡೆ</th></tr>
<tr><td>1</td><td>2019-20</td><td>3054 ರಸ್ತೆ ನಿರ್ವಹಣೆ</td><td>59.00</td><td>59.00</td></tr>
</table>
</td></tr>
</table>

ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು.

2		ಮಳೆಪರಿಹಾರ	200.00	0.00
ಒಟ್ಟು			1293.80	59.00
1	2020-21	3054-ಸಿಎಂಜಿಎಸ್‌ವೈ	49.17	19.67
ಒಟ್ಟು			49.17	19.67

- ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ)ಯು ಹಾಸನ ಜಿಲ್ಲೆಯ ಗ್ರಾಮೀಣ ರಸ್ತೆ ಮತ್ತು ಸೇತುವೆ ಕಾಮಗಾರಿಗಳ ದುರಸ್ತಿಗೆ ರೂ. 1,393.79 ಲಕ್ಷಗಳ ಅನುದಾನವನ್ನು ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ.
- ಹಾಸನ ಜಿಲ್ಲಾಧಿಕಾರಿಗಳು ಗ್ರಾಮೀಣ ರಸ್ತೆಗಳ ಕಾಮಗಾರಿಗಳ ಆದ್ಯತೆ ಮತ್ತು ಅಗತ್ಯತೆಗನುಗುಣವಾಗಿ ಅನುದಾನವನ್ನು ಬಿಡುಗಡೆ ಮಾಡಬೇಕಿದೆ

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂ: ಟಿಡಿ 12 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:03.02.2021.

4/s (64)
3/2/21

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಕರುಣಾಕರ ರೆಡ್ಡಿ ಜಿ., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 368 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಕರುಣಾಕರ ರೆಡ್ಡಿ ಜಿ., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 368 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Mala 03/02/2021
(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 368

ಸದಸ್ಯರ ಹೆಸರು : ಶ್ರೀ ಕರುಣಾಕರ ರೆಡ್ಡಿ ಜಿ. (ಹರಪನಹಳ್ಳಿ)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 03-02-2021

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಹರಪನಹಳ್ಳಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಗ್ರಾಮೀಣ ಪ್ರದೇಶಗಳಿಗೆ ಸರಿಯಾದ ಬಸ್ ಸಂಚಾರದ ವ್ಯವಸ್ಥೆ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕೋವಿಡ್-19ರ ಹಿನ್ನೆಲೆಯಲ್ಲಿ ವಿಧಿಸಿದ್ದ ಲಾಕ್‌ಡೌನ್ ಸಡಿಲಿಕೆಯ ನಂತರ ಡಿಸೆಂಬರ್ ತಿಂಗಳ ಅಂತ್ಯದವರೆಗೆ ಹರಪನಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯೊಳಗೆ ಬರುವ ಉಚ್ಚಂಗಿದುರ್ಗ, ಮೈದೂರು, ಹೊಳಲು, ಉತ್ತಂಗಿ, ಬೆಂಡಿಗೆರೆ ಕೊಟ್ಟೂರು ವಲಯಗಳಲ್ಲಿ ಬರುವ ಗ್ರಾಮಗಳಿಗೆ ಬಸ್ ಸೌಕರ್ಯವನ್ನು ಜನಸಂದಣಿಗೆ ಅನುಗುಣವಾಗಿ ಒದಗಿಸಲಾಗಿರುತ್ತದೆ. ಜನವರಿ ಮಾಹೆಯಲ್ಲಿ ಶಾಲಾ-ಕಾಲೇಜು ಪ್ರಾರಂಭವಾಗಿರುವುದರಿಂದ ಹಲವಾಗಿಲು, ತಾವರಗುಂದಿ ವಲಯದ ಗ್ರಾಮಗಳಿಗೂ ಸಹ ಬಸ್ ಸೌಕರ್ಯ ಒದಗಿಸಲಾಗಿದೆ.
ಆ)	ಬಂದಿದ್ದಲ್ಲಿ, ಯಾವಾಗ ಗ್ರಾಮೀಣ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತದೆ? (ಸಂಪೂರ್ಣ ವಿವರ ನೀಡುವುದು)	ಪ್ರಸ್ತುತ ಹರಪನಹಳ್ಳಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಒಟ್ಟು 236 ಗ್ರಾಮಗಳಿದ್ದು, ಅವುಗಳಲ್ಲಿ 225 ಗ್ರಾಮಗಳಿಗೆ ಬಸ್ ಸೌಕರ್ಯ ಒದಗಿಸಿದ್ದು, ಉಳಿದ 11 ಗ್ರಾಮಗಳಿಗೆ ಸಾರಿಗೆ ಸೌಲಭ್ಯ ಒದಗಿಸಿರುವುದಿಲ್ಲ. ಮುಂದುವರೆದು, ಹರಪನಹಳ್ಳಿ ಘಟಕವು ದಿನಾಂಕ: 01.11.2019ರಿಂದ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಿಂದ ಈ.ಕ.ರ.ಸಾ.ಸಂಸ್ಥೆಯ ಹೊಸಪೇಟೆ ವಿಭಾಗದ ಆಡಳಿತ ವ್ಯಾಪ್ತಿಗೆ ಹಸ್ತಾಂತರಿಸಲಾಗಿರುತ್ತದೆ ಹರಪನಹಳ್ಳಿ ತಾಲೂಕಿನಲ್ಲಿ ಸಾರಿಗೆ ಸೌಲಭ್ಯ ಒದಗಿಸದೇ ಇರುವ ಈ ಕೆಳಕಂಡ 11 ಗ್ರಾಮಗಳಿಗೆ ಖಾಸಗಿ ವಾಹನಗಳು ಕಾರ್ಯಾಚರಿಸುತ್ತಿದ್ದು, ಸದರಿ ಗ್ರಾಮಗಳಿಗೆ ಮಾರ್ಗ ಸರ್ವೆ ಕೈಗೊಂಡು ಪರಿಶೀಲಿಸಿ, ಬಸ್ ಸೇವೆ ಒದಗಿಸಲು ಕ್ರಮ ಜರುಗಿಸಲಾಗುವುದು:

ಈಶಾಪುರ	ಹೊನ್ನಾಪುರ
ಕನಾಯಕಹಳ್ಳಿ	ಚನ್ನಾಪುರ
ತುಂಬಿಗೆರೆ	ಚನ್ನಾಪುರ ತಾಂಡ
ರಾಮಘಟ್ಟ ದೊಡ್ಡ ತಾಂಡ	ನಂದಿಕಂಬ ತಾಂಡ
ದಿದ್ದಿಗಿ ತಾಂಡ	ಪುಣಭಘಟ್ಟ ತಾಂಡ
ನರಬೊಮ್ಮನಹಳ್ಳಿ	

ಸಂಖ್ಯೆ: ಟಿಡಿ 12 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ಸರ್ಕಾರ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಆಯುಕ್ತರವರ ಕಛೇರಿ, ಗ್ರಾ.ಕುನೀ.&.ನೈ.ಇ., 2ನೇ ಮಹಡಿ, "ಇ" ಬ್ಲಾಕ್, ಕೆಹೆಚ್‌ಬಿ ಕಟ್ಟಡ,
ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009. ☎:080-22240508 📠:22240509
ಇ-ಮೇಲ್: krwssd@gmail.com

ಸಂ:ಗ್ರಾಕುನೀ&ನೈಇ/143/ಗ್ರಾನೀಸ(4)2020 ದಿನಾಂಕ:02.02.2021.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು-01.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ **ಶ್ರೀ ಕೃಷ್ಣಾರೆಡ್ಡಿ. ಎಂ. (ಚಿಂತಾಮಣಿ)** ಇವರ **ಚುಕ್ಕೆ ರಹಿತ ಪ್ರಶ್ನೆ ಸಂ:723ಕ್ಕೆ** ಸಂಬಂಧಿಸಿದ ಮೇಲಿನ ಕ್ರಮ/ವಾಸ್ತವಿಕ ವರದಿಯ ಉತ್ತರ ನೀಡುವ ಬಗ್ಗೆ.

******

ಮಾನ್ಯ ವಿಧಾನ ಸಭಾ ಸದಸ್ಯರಾದ **ಶ್ರೀ ಕೃಷ್ಣಾರೆಡ್ಡಿ. ಎಂ. (ಚಿಂತಾಮಣಿ)** ಇವರ **ಚುಕ್ಕೆ ರಹಿತ ಪ್ರಶ್ನೆ ಸಂ:723ಕ್ಕೆ** ಉತ್ತರದ **25** ಪ್ರತಿಗಳನ್ನು ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ತಮ್ಮ ವಿಶ್ವಾಸಿ,

ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಪ್ರತಿಯನ್ನು:
1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರಿಗೆ

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ಕೃಷ್ಣಾರೆಡ್ಡಿ.ಎಂ (ಚಿಂತಾಮಣಿ)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 723

ಉತ್ತರ ದಿನಾಂಕ : 03.02.2021

ಕ್ರ.ಸಂ	ಪ್ರಶ್ನೆ	ಉತ್ತರಗಳು
ಅ)	ಚಿಂತಾಮಣಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಚಿಂತಾಮಣಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆ.
ಆ)	ಬಂದಿದ್ದಲ್ಲಿ, ಸಾರ್ವಜನಿಕರಿಗೆ ಕುಡಿಯುವ ನೀರಿನ ಅಭಾವವನ್ನು ತಪ್ಪಿಸಲು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ತೆರೆಯುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;	ಸಾರ್ವಜನಿಕರಿಗೆ ಕುಡಿಯುವ ನೀರಿನ ಅಭಾವವನ್ನು ತಪ್ಪಿಸಲು 2020-21ನೇ ಸಾಲಿನಲ್ಲಿ ಟಾಸ್ಕ್‌ಫೋರ್ಸ್ ಯೋಜನೆಯಡಿ ಚಿಂತಾಮಣಿ ತಾಲ್ಲೂಕಿಗೆ 17 ಕಾಮಗಾರಿಗಳನ್ನು ಅಂದಾಜು ಮೊತ್ತ ರೂ.55.00ಲಕ್ಷಗಳಿಗೆ ಕೈಗೊಂಡು ಪೂರ್ಣಗೊಳಿಸಲಾಗಿದೆ. 2019-20ನೇ ಸಾಲಿನಲ್ಲಿ ಸಿ.ಆರ್.ಎಫ್ ಯೋಜನೆಯಡಿ ಚಿಂತಾಮಣಿ ತಾಲ್ಲೂಕಿಗೆ ಒಟ್ಟು 291 ಕಾಮಗಾರಿಗಳಿಗೆ, ಒಟ್ಟು ಅಂದಾಜು ಮೊತ್ತ ರೂ.421.04ಲಕ್ಷಗಳಿಗೆ ಅನುಮೋದನೆಗೊಂಡು, ಇಲ್ಲಿಯವರೆಗೆ ರೂ.372.36ಲಕ್ಷಗಳ ವೆಚ್ಚವನ್ನು ಭರಿಸಲಾಗಿರುತ್ತದೆ. ಸದರಿ ಗ್ರಾಮಗಳಲ್ಲಿ ಕಲುಷಿತ ನೀರು ಕಂಡು ಬಂದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಲು ಕ್ರಮಕೈಗೊಳ್ಳಲಾಗುವುದು.
ಇ)	ಹಾಗಿದ್ದಲ್ಲಿ, ಅದು ಯಾವ ಹಂತದಲ್ಲಿದೆ, ಯಾವ ಗ್ರಾಮಗಳಲ್ಲಿ ತೆರೆಯಲಾಗುವುದು ಹಾಗೂ ಎಷ್ಟು ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು? (ವಿವರ ನೀಡುವುದು)	

ಕಡತ ಸಂ:ಗ್ರಾಕುನೀ&ನೈಇ 143 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಆಯುಕ್ತರವರ ಕಛೇರಿ, ಗ್ರಾ.ಕುನೀ.&.ನೈ.ಇ., 2ನೇ ಮಹಡಿ, "ಇ" ಬ್ಲಾಕ್, ಕೆಹೆಚ್‌ಬಿ ಕಟ್ಟಡ,
ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು–560009. ☎:080–22240508 📠:22240509
ಇ–ಮೇಲ್: krwssd@gmail.com

ಸಂ:ಗ್ರಾಕುನೀ&ನೈಇ/146/ಗ್ರಾನೀಸ(4)2020 ದಿನಾಂಕ:02.02.2021.

27
W/S
3/2/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು–01.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ **ಅವಿನಾಶ್ ಉಮೇಶ್ ಜಾಧವ್ ಡಾ॥ (ಚಿಂಚೋಳಿ)** ಇವರ **ಚುಕ್ಕೆ ರಹಿತ ಪ್ರಶ್ನೆ ಸಂ:759ಕ್ಕೆ** ಸಂಬಂಧಿಸಿದ ಮೇಲಿನ ಕ್ರಮ/ವಾಸ್ತವಿಕ ವರದಿಯ ಉತ್ತರ ನೀಡುವ ಬಗ್ಗೆ.

******

ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ **ಅವಿನಾಶ್ ಉಮೇಶ್ ಜಾಧವ್ ಡಾ॥ (ಚಿಂಚೋಳಿ)** ಇವರ **ಚುಕ್ಕೆ ರಹಿತ ಪ್ರಶ್ನೆ ಸಂ:759ಕ್ಕೆ** ಉತ್ತರದ **25** ಪ್ರತಿಗಳನ್ನು ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ತಮ್ಮ ವಿಶ್ವಾಸಿ,
02/2/2021
ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಪ್ರತಿಯನ್ನು:
1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರಿಗೆ

ಕರ್ನಾಟಕ ವಿಧಾನಸಭೆ

ಸದಸ್ಯರ ಹೆಸರು	:	ಶ್ರೀ ಅವಿನಾಶ್ ಉಮೇಶ್ ಜಾಧವ್ ಡಾ॥ (ಚಿಂಚೋಳಿ)
ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ	:	759
ಉತ್ತರ ದಿನಾಂಕ	:	03.02.2021

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಕಲಬುರಗಿ ಜಿಲ್ಲೆ ಚಿಂಚೋಳಿ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಹಾಗಿದ್ದಲ್ಲಿ ಪ್ಲೋರೈಡ್ ಮಿಶ್ರಿತ ನೀರನ್ನು ಹೊಂದಿರುವ ಹಳ್ಳಿಗಳ ಸಂಖ್ಯೆ ಎಷ್ಟು; ಇಲ್ಲಿನ ಜನರಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲು ಸರ್ಕಾರ ಯಾವ-ಯಾವ ಯೋಜನೆಗಳನ್ನು ಕೈಗೊಂಡಿದೆ? (ಸಂಪೂರ್ಣವಾದ ಮಾಹಿತಿ ಒದಗಿಸುವುದು)	ಕಲಬುರಗಿ ಜಿಲ್ಲೆಯ ಚಿಂಚೋಳಿ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯ ಹಳ್ಳಿಗಳಲ್ಲಿ ಪ್ರಸ್ತುತವಾಗಿ ಯಾವುದೇ ಕುಡಿಯುವ ನೀರಿನ ಸಮಸ್ಯೆ ಇರುವುದಿಲ್ಲ. ಚಿಂಚೋಳಿ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 9 ಪ್ಲೋರೈಡ್ ಮಿಶ್ರಿತ ನೀರಿನ ಮೂಲ ಹೊಂದಿರುವ ಹಳ್ಳಿಗಳಿರುತ್ತವೆ. ಸದರಿ ಹಳ್ಳಿಗಳಿಗೆ ಶುದ್ಧ ಕುಡಿಯುವ ನೀರನ್ನು ಶುದ್ಧ ಕುಡಿಯುವ ನೀರಿನ ಘಟಕ ಹಾಗೂ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳಿಂದ ಒದಗಿಸಲಾಗುತ್ತಿದೆ. ವಿವರವನ್ನು **ಅನುಬಂಧ-1**ರಲ್ಲಿ ಲಗತ್ತಿಸಿದೆ.

ಸಂ:ಗ್ರಾಕುನೀ&ನೈಇ 146 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಚುಕ್ಕೆರಹಿತ ಪ್ರಶ್ನೆ ಸಂಖ್ಯೆ:- 7590 ಅನುಬಂಧ

ಅನುಬಂಧ – 1

Details of Flouride Affected Habitations & Remedial Measures Taken

Sl. No.	Taluka	Gram Panchayat	Habitation Name	Fluoride Affected		Flouride Concentration (mg/l)	Covered under MVS Scheme	Installation Date	Working Condition	Covered under WPP	Installation Date	Working Condition	WPP Capacity (lph)	Remarks
				Location	Source Code									
1	Chincholli	Chengta	Adkimukh tanda	Behind Tanda	LC148	1.70	-	-	-	Yes	08-11-2018	Not Working	1000	WPP Repair work is U/P. Till then water is supplied through different source i.e., near Mullamari valley (non-flouride affected)
2	Chincholli	Chimmanchod	Nagaral	Near mallikarjun Temple	LC31	2.00	-	-	-	Yes	27-05-2017	Working	500	-
3	Chincholli	Gadikeshwar	Gadikeshwar	Yallamma Temple	LC59	2.10	Yes	25-03-2018	Working	Yes	13-02-2018	Working	1000	-
4	Chincholli	Hasargundagi	Marapalli	Near nayaralli house	LC23	2.23	-	-	-	Yes	12-04-2015	Working	4000	-
5	Chincholli	Kanakpur	Kanakpur	Near Badigera House	LC73	2.30	-	-	-	Yes	02-02-2018	Not Working	1000	WPP Repair work is U/P. Till then water is supplied through different source i.e., near Basaveswar Statue in Kanakapur village (non-flouride affected)
6	Chincholli	Kerolli	Kerolli	Margamma Temple	LC69	1.62	-	-	-	Yes	05-12-2016	Working	500	-
7	Chincholli	Kodli	Kodli	Near Kodli gate	LC21	2.10	-	-	-	Yes	14-05-2016	Working	500	-
8	Chincholli	Salgar Basanthpur	Shivram Naik Tanda	Near Yallama Devi Temple Road	LC7	2.30	-	-	-	Yes	24-06-2018	Working	1000	-
9	Chittapur	Kalagi	Kindi Tanda	Existing Source Kalagi to Kindi Tanda road	LCh246	2.46	-	-	-	No	-	-	-	Water is supplied through different source i.e., 1.5km (south side) away from Kindi Tanda (non-flouride affected)

ಕರ್ನಾಟಕ ಸರ್ಕಾರ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಆಯುಕ್ತರವರ ಕಛೇರಿ, ಗ್ರಾ.ಕುನೀ.&.ನೈ.ಇ., 2ನೇ ಮಹಡಿ, "ಇ" ಬ್ಲಾಕ್, ಕೆಹೆಚ್‌ಬಿ ಕಟ್ಟಡ,
ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009. ☎:080-22240508 📠:22240509
ಇ-ಮೇಲ್: krwssd@gmail.com

ಸಂ:ಗ್ರಾಕುನೀ&ನೈಇ/142/ಗ್ರಾನೀಸ(4)2020 ದಿನಾಂಕ:02.02.2021.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು-01.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ **ಶ್ರೀ ಕೃಷ್ಣಾರೆಡ್ಡಿ. ಎಂ. (ಚಿಂತಾಮಣಿ)** ಇವರ **ಚುಕ್ಕೆ ರಹಿತ ಪ್ರಶ್ನೆ ಸಂ:722**ಕ್ಕೆ ಸಂಬಂಧಿಸಿದ ಮೇಲಿನ ಕ್ರಮ/ವಾಸ್ತವಿಕ ವರದಿಯ ಉತ್ತರ ನೀಡುವ ಬಗ್ಗೆ.

******

ಮಾನ್ಯ ವಿಧಾನ ಸಭಾ ಸದಸ್ಯರಾದ **ಶ್ರೀ ಕೃಷ್ಣಾರೆಡ್ಡಿ. ಎಂ. (ಚಿಂತಾಮಣಿ)** ಇವರ **ಚುಕ್ಕೆ ರಹಿತ ಪ್ರಶ್ನೆ ಸಂ:722**ಕ್ಕೆ ಉತ್ತರದ **25** ಪ್ರತಿಗಳನ್ನು ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ತಮ್ಮ ವಿಶ್ವಾಸಿ,

ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಪ್ರತಿಯನ್ನು:
1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರಿಗೆ

ಕರ್ನಾಟಕ ವಿಧಾನಸಭೆ

ಸದಸ್ಯರ ಹೆಸರು : ಶ್ರೀ ಕೃಷ್ಣಾರೆಡ್ಡಿ. ಎಂ (ಚಿಂತಾಮಣಿ)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 722

ಉತ್ತರ ದಿನಾಂಕ : 03.02.2021

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಚಿಂತಾಮಣಿ ತಾಲ್ಲೂಕಿನ ಭಕ್ತರಹಳ್ಳಿ ಅರಸೀಕೆರೆಯಿಂದ ಚಿಂತಾಮಣಿ ನಗರಕ್ಕೆ ಅಳವಡಿಸಿರುವ ಕೊಳವೆ ಮಾರ್ಗದಿಂದ ಅಂಬಾಜಿದುರ್ಗ ಹೋಬಳಿಯ ಕತ್ತರಿಗುಪ್ಪ ಪಂಚಾಯಿತಿಯ ಹುಸೇನ್‌ಪುರ ಗ್ರಾಮಕ್ಕೆ ಕತ್ತರಿಗುಪ್ಪ ಪಂಚಾಯಿತಿಯ ಕತ್ತಿರಗುಪ್ಪ ಗ್ರಾಮಕ್ಕೆ ಉಪ್ಪರಪೇಟೆ ಪಂಚಾಯಿತಿಯ ಚಾಂಡ್ರಹಳ್ಳಿ ಗ್ರಾಮಕ್ಕೆ ಕತ್ತರಿಗುಪ್ಪ ಪಂಚಾಯಿತಿಯ ಲಕ್ಷ್ಮೀದೇವಿಕೋಟೆ ಗ್ರಾಮಕ್ಕೆ ಹಾಗೂ ಕೋನಪಲ್ಲಿ ಪಂಚಾಯಿತಿ ಕೋನಪಟ್ಟಿ ಗ್ರಾಮಕ್ಕೆ ಕುಡಿಯುವ ನೀರನ್ನು ಸರಬರಾಜು ಮಾಡಲು ಶುದ್ಧೀಕರಣ ಘಟಕಗಳು, ನೀರನ್ನು ಶುದ್ಧೀಕರಿಸುವ ಉಪಕರಣಗಳು ಹಾಗೂ ಪೈಪ್‌ಲೈನ್ ಕಾಮಗಾರಿಗಳನ್ನು ನಿರ್ಮಾಣ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;	ಚಿಂತಾಮಣಿ ತಾಲ್ಲೂಕಿನ ಭಕ್ತರಹಳ್ಳಿ ಅರಸೀಕೆರೆಯಿಂದ ಚಿಂತಾಮಣಿ ನಗರಕ್ಕೆ ಅಳವಡಿಸಿರುವ ಕೊಳವೆ ಮಾರ್ಗದಿಂದ ಅಂಬಾಜಿದುರ್ಗ ಹೋಬಳಿಯ ಕತ್ತರಿಗುಪ್ಪ ಪಂಚಾಯಿತಿಯ ಹುಸೇನ್‌ಪುರ ಗ್ರಾಮಕ್ಕೆ ಕತ್ತರಿಗುಪ್ಪ ಪಂಚಾಯಿತಿಯ ಕತ್ತಿರಗುಪ್ಪ ಗ್ರಾಮಕ್ಕೆ ಉಪ್ಪರಪೇಟೆ ಪಂಚಾಯಿತಿಯ ಚಾಂಡ್ರಹಳ್ಳಿ ಗ್ರಾಮಕ್ಕೆ ಕತ್ತರಿಗುಪ್ಪ ಪಂಚಾಯಿತಿಯ ಲಕ್ಷ್ಮೀದೇವಿಕೋಟೆ ಗ್ರಾಮಕ್ಕೆ ಹಾಗೂ ಕೋನಪಲ್ಲಿ ಪಂಚಾಯಿತಿ ಕೋನಪಲ್ಲಿ ಗ್ರಾಮಕ್ಕೆ ಕುಡಿಯುವ ನೀರನ್ನು ಸರಬರಾಜು ಮಾಡಲು ಶುದ್ಧೀಕರಣ ಘಟಕಗಳು, ನೀರನ್ನು ಶುದ್ಧೀಕರಿಸುವ ಉಪಕರಣಗಳು ಹಾಗೂ ಪೈಪ್‌ಲೈನ್ ಕಾಮಗಾರಿಗಳನ್ನು ನಿರ್ಮಾಣ ಮಾಡುವ ಪ್ರಸ್ತಾವನೆಯು ಸರ್ಕಾರಕ್ಕೆ ಸಲ್ಲಿಕೆಯಾಗಿರುವುದಿಲ್ಲ.
ಆ)	ಹಾಗಿದ್ದಲ್ಲಿ, ಅದು ಯಾವ ಹಂತದಲ್ಲಿದೆ ಸಂಪೂರ್ಣ ವಿವರ ನೀಡುವುದು?	ಅನ್ವಯಿಸುವುದಿಲ್ಲ.

ಕಡತ ಸಂ:ಗ್ರಾಕುನೀ&ನೈಇ 142 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಆಯುಕ್ತರವರ ಕಛೇರಿ, ಗ್ರಾ.ಕುನೀ.&.ನೈ.ಇ., 2ನೇ ಮಹಡಿ, "ಇ" ಬ್ಲಾಕ್, ಕೆಹೆಚ್‌ಬಿ ಕಟ್ಟಡ,
ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು–560009. ☎:080–22240508 📠:22240509
ಇ–ಮೇಲ್: krwssd@gmail.com

ಸಂ:ಗ್ರಾಕುನೀ&ನೈಇ/136/ಗ್ರಾನೀಸ(4)2020 ದಿನಾಂಕ:02.02.2021.

12
U/S
3/2/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು–01.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ **ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ) ಇವರ ಚುಕ್ಕೆ** ರಹಿತ ಪ್ರಶ್ನೆ **ಸಂ:584ಕ್ಕೆ** ಸಂಬಂಧಿಸಿದ ಮೇಲಿನ ಕ್ರಮ/ವಾಸ್ತವಿಕ ವರದಿಯ ಉತ್ತರ ನೀಡುವ ಬಗ್ಗೆ.

******

ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ **ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ) ಇವರ ಚುಕ್ಕೆ ರಹಿತ ಪ್ರಶ್ನೆ ಸಂ:584ಕ್ಕೆ** ಉತ್ತರದ **25** ಪ್ರತಿಗಳನ್ನು ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ತಮ್ಮ ವಿಶ್ವಾಸಿ,
2/2/2021
ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಪ್ರತಿಯನ್ನು:
1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರಿಗೆ

ಕರ್ನಾಟಕ ವಿಧಾನಸಭೆ

ಸದಸ್ಯರ ಹೆಸರು	:	ಶ್ರೀ ಐಹೋಳೆ ಡಿ.ಮಹಾಲಿಂಗಪ್ಪ (ರಾಯಭಾಗ)
ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ	:	584
ಉತ್ತರ ದಿನಾಂಕ	:	03.02.2021

ಕ್ರ.ಸಂ	ಪ್ರಶ್ನೆ	ಉತ್ತರಗಳು
ಅ)	ಬೆಳಗಾವಿ ಜಿಲ್ಲೆ, ರಾಯಬಾಗ ತಾಲ್ಲೂಕಿನ ಬಿರನಾಳ ಹಾಗೂ ಇತರೆ 13 ಗ್ರಾಮಗಳ ಮತ್ತು ಕೆಂಪಟ್ಟಿ ಹಾಗೂ ಇತರೆ 4 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;	ರಾಯಬಾಗ ತಾಲ್ಲೂಕಿನ ಬಿರನಾಳ ಹಾಗೂ ಇತರೆ 13 ಗ್ರಾಮಗಳ ಮತ್ತು ಕೆಂಪಟ್ಟಿ ಹಾಗೂ ಇತರೆ 4 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಪ್ರಸ್ತಾವನೆಯು ಸರ್ಕಾರದ ಮುಂದಿದೆ.
ಆ)	ಹಾಗಿದ್ದಲ್ಲಿ, ಈ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ; ಹಾಗೂ ಯಾವ ಕಾಲಮಿತಿಯಲ್ಲಿ ಈ ಪ್ರಸ್ತಾವನೆಗೆ ಅನುಮೋದನೆ ನೀಡಿ ಕ್ರಿಯಾ ಯೋಜನೆಯಲ್ಲಿ ಸೇರ್ಪಡಿಸಿ, ಕಾಮಗಾರಿ ಆರಂಭಿಸಲಾಗುವುದು;	ಸದರಿ ಯೋಜನೆಗಳಿಗೆ ದಿನಾಂಕ:01.02.2017 ರಂದು ನಡೆದ SLSSC ಸಭೆಯಲ್ಲಿ 85 LPCD ಸೇವಾ ಮಟ್ಟಕ್ಕೆ ಅನುಮೋದನೆಗೊಂಡಿರುತ್ತವೆ. ಆದರೆ ಪ್ರಸ್ತುತ ಯೋಜನಾ ವರದಿಯನ್ನು ಜೆ.ಜೆ.ಎಂ ಮಾರ್ಗಸೂಚಿಗಳನ್ವಯ 55 LPCD ಸೇವಾ ಮಟ್ಟಕ್ಕೆ ಮಾರ್ಪಡಿಸಲು ಕ್ರಮ ವಹಿಸಲಾಗುತ್ತಿದ್ದು, ಅನುದಾನದ ಲಭ್ಯತೆಯ ಅನುಸಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು.
ಇ)	ಇಲ್ಲವಾದಲ್ಲಿ; ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಿ ಇಲ್ಲಿನ ಸಾರ್ವಜನಿಕರಿಗೆ ಕುಡಿಯುವ ನೀರು ಒದಗಿಸಲು ಸರ್ಕಾರಕ್ಕಿರುವ ತೊಂದರೆಗಳೇನು;	
ಈ)	ಹಾಗಿದ್ದಲ್ಲಿ; ಯಾವ ಕಾಲಮಿತಿಯಲ್ಲಿ ಈ ಯೋಜನೆಯ ಕಾಮಗಾರಿ ಪ್ರಾರಂಭಿಸಲಾಗುವುದು? (ವಿವರ ನೀಡುವುದು)	

ಸಂ:ಗ್ರಾಕುನೀ&ನೈಇ 136 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಆಯುಕ್ತರವರ ಕಛೇರಿ, ಗ್ರಾ.ಕುನೀ.&.ನೈ.ಇ., 2ನೇ ಮಹಡಿ, "ಇ" ಬ್ಲಾಕ್, ಕೆಹೆಚ್‌ಬಿ ಕಟ್ಟಡ,
ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು–560009. ☎:080–22240508 📠:22240509
ಇ–ಮೇಲ್: krwssd@gmail.com

ಸಂ:ಗ್ರಾಕುನೀ&ನೈಇ/145/ಗ್ರಾನೀಸ(4)2020 ದಿನಾಂಕ:02.02.2021.

19
U/S
3/2/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು–01.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ **ಶ್ರೀ ಆನಂದ್ ಸಿದ್ದು ನ್ಯಾಮಗೌಡ(ಜಮಖಂಡಿ) ಇವರ ಚುಕ್ಕೆ ರಹಿತ ಪ್ರಶ್ನೆ ಸಂ:736ಕ್ಕೆ** ಸಂಬಂಧಿಸಿದ ಮೇಲಿನ ಕ್ರಮ/ವಾಸ್ತವಿಕ ವರದಿಯ ಉತ್ತರ ನೀಡುವ ಬಗ್ಗೆ.

******

ಮಾನ್ಯ ವಿಧಾನ ಸಭಾ ಸದಸ್ಯರಾದ **ಶ್ರೀ ಆನಂದ್ ಸಿದ್ದು ನ್ಯಾಮಗೌಡ (ಜಮಖಂಡಿ) ಇವರ ಚುಕ್ಕೆ ರಹಿತ ಪ್ರಶ್ನೆ ಸಂ:736ಕ್ಕೆ** ಉತ್ತರದ **25** ಪ್ರತಿಗಳನ್ನು ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ತಮ್ಮ ವಿಶ್ವಾಸಿ,

2/2/2021

ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಪ್ರತಿಯನ್ನು:
1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರಿಗೆ

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ಆನಂದ್ ಸಿದ್ದು ನ್ಯಾಮಗೌಡ (ಜಮಖಂಡಿ)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 736

ಉತ್ತರ ದಿನಾಂಕ : 03.02.2021

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಜಮಖಂಡಿ ಮತಕ್ಷೇತ್ರದಲ್ಲಿ ಅಳವಡಿಸಲಾದ ಶುದ್ಧ ಕುಡಿಯುವ ನೀರಿನ ಘಟಕಗಳು ಎಷ್ಟು; ಈ ಪೈಕಿ ಎಷ್ಟು ಘಟಕಗಳು ಕಾರ್ಯನಿರ್ವಹಿಸುತ್ತವೆ; ಎಷ್ಟು ಸ್ಥಗಿತಗೊಂಡಿರುತ್ತವೆ;	ಜಮಖಂಡಿ ಮತ ಕ್ಷೇತ್ರದಲ್ಲಿನ ಶುದ್ಧ ಕುಡಿಯುವ ನೀರಿನ ಘಟಕಗಳ ಮಾಹಿತಿ ಕೆಳಕಂಡಂತಿದೆ. ಮಂಜೂರಾದ ಘಟಕಗಳು: 127 ಕಾರ್ಯನಿರ್ವಹಿಸುತ್ತಿರುವ ಘಟಕಗಳು: 103 ಸ್ಥಗಿತಗೊಂಡಿರುವ ಘಟಕಗಳು: 13 ದುರಸ್ತಿಯಾಗದ ಸ್ಥಿತಿಯಲ್ಲಿದ್ದು, ಕೈಬಿಡಲಾದ ಘಟಕಗಳು: 11
ಆ)	ಹಾಗಿದ್ದಲ್ಲಿ, ಸ್ಥಗಿತಗೊಂಡಿರುವ ಘಟಕಗಳನ್ನು ದುರಸ್ತಿಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?	ಸ್ಥಗಿತಗೊಂಡಿರುವ ಘಟಕಗಳನ್ನು ದುರಸ್ತಿ ಪಡಿಸಲು 2019–20ನೇ ಸಾಲಿನ NRDWP ಯೋಜನೆಯ ಉಳಿತಾಯ ಮೊತ್ತದಲ್ಲಿ ರಿಪೇರಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. 11 ಘಟಕಗಳು ರಿಪೇರಿಯಾಗದ ಸ್ಥಿತಿಯಲ್ಲಿದ್ದು, ಸದರಿ ಗ್ರಾಮಗಳಿಗೆ ಬೇರೆ ಯೋಜನೆಗಳಿಂದ ಕುಡಿಯುವ ನೀರನ್ನು ಒದಗಿಸಲಾಗುತ್ತಿದೆ.
ಇ)	ಶುದ್ಧ ನೀರಿನ ಘಟಕಗಳ ಕೊರತೆ ಇರುವ ಗ್ರಾಮಗಳಿಗೆ ಶುದ್ಧ ನೀರಿನ ಘಟಕಗಳನ್ನು ಪೂರೈಸುವ ಯೋಜನೆ ಸರ್ಕಾರದ ಮುಂದಿದೆಯೇ?	ಯಾವುದು ಇರುವುದಿಲ್ಲ.

ಸಂ:ಗ್ರಾಕುನೀ&ನೈಇ 145 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ
ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ)
ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ

2ನೇ ಮಹಡಿ, ಕೆ.ಹೆಚ್.ಬಿ ಕಾಂಪ್ಲೆಕ್ಸ್, ಕಾವೇರಿ ಭವನ, ಬೆಂಗಳೂರು-560 009
ಟೆಲಿಫ್ಯಾಕ್ಸ್: 080-22221862 ಇ-ಮೇಲ್: wsrdpr@gmail.com,

ಸಂಖ್ಯೆ: RDWSD/14/SBM-G/LAQ/2021 ದಿನಾಂಕ 03.02.2021

129
U/S
3/2/21

ರವರಿಗೆ,
ಕಾರ್ಯದರ್ಶಿಗಳು
ಕರ್ನಾಟಕ ವಿಧಾನಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: **ಮಾನ್ಯ ವಿಧಾನಸಭೆಯ ಸದಸ್ಯರಾದ ಶ್ರೀ ರಾಜೇಗೌಡ ಟಿ.ಡಿ. (ಶೃಂಗೇರಿ) ಇವರು ಕೇಳಿರುವ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ – 638ಕ್ಕೆ ಉತ್ತರವನ್ನು ಸಲ್ಲಿಸುವ ಕುರಿತು.**

ಉಲ್ಲೇಖ: ಪತ್ರ ಸಂಖ್ಯೆ: ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.638 ದಿನಾಂಕ 23.01.2021.

****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಮಾನ್ಯ **ವಿಧಾನಸಭೆಯ ಸದಸ್ಯರಾದ ಶ್ರೀ ರಾಜೇಗೌಡ ಟಿ.ಡಿ. (ಶೃಂಗೇರಿ) ಇವರು ಕೇಳಿರುವ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ – 638ಕ್ಕೆ** ಸ್ವಚ್ಛ ಭಾರತ್ ಮಿಷನ್ ಯೋಜನೆಗೆ ಸಂಬಂಧಿಸಿದಂತೆ ಉತ್ತರವನ್ನು ಸಿದ್ಧಪಡಿಸಿ 25 ಪ್ರತಿಗಳನ್ನು ತಮ್ಮ ಅವಗಾಹನೆಗೆ ಸಲ್ಲಿಸಲಾಗಿದೆ.

ತಮ್ಮ ವಿಶ್ವಾಸಿ

ಉಪ ನಿರ್ದೇಶಕರು
ಸ್ವಚ್ಛ ಭಾರತ್ ಮಿಷನ್ (ಗ್ರಾ)
ಗ್ರಾ.ಕು.ನೀ & ನೈರ್ಮಲ್ಯ ಇಲಾಖೆ

ಉತ್ತರದ ಪ್ರತಿಯನ್ನು ಈ ಕೆಳಕಂಡವರಿಗೆ ಕಳುಹಿಸಲಾಗಿದೆ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು ಇವರ ಮಾಹಿತಿಗಾಗಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ.ಪಂ.ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
3. ಸರ್ಕಾರದ ಅಧೀನ ಕಾರ್ಯದರ್ಶಿ (ಸಮನ್ವಯ) ಗ್ರಾ.ಅ.ಪಂ.ರಾಜ್ ಇಲಾಖೆ, ಬೆಂಗಳೂರು.
4. ಕಚೇರಿ ಪ್ರತಿ.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 638

ಸದಸ್ಯರ ಹೆಸರು : **ಶ್ರೀ ರಾಜೇಗೌಡ ಟಿ.ಡಿ. (ಶೃಂಗೇರಿ)**

ಉತ್ತರಿಸುವ ದಿನಾಂಕ : 03.02.2021

ಉತ್ತರಿಸುವವರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ 'ಸ್ವಚ್ಛಗ್ರಾಮ' ಯೋಜನೆಯಡಿ ಎಷ್ಟು ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)	ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯ ಹಂತ-2ರ ಮಾರ್ಗಸೂಚಿಯಂತೆ ಬಯಲು ಬಹಿರ್ದೆಸೆ ಮುಕ್ತ ಗ್ರಾಮಗಳಲ್ಲಿ ಸುಸ್ಥಿರತೆಯನ್ನು ಕಾಯ್ದುಕೊಳ್ಳಲು ODF Plus ಚಟುವಟಿಕೆಗಳನ್ನು ಅನುಷ್ಠಾನ ಮಾಡಲು ಅವಕಾಶ ಕಲ್ಪಿಸಲಾಗಿದೆ. ODF Plus ಚಟುವಟಿಕೆಗಳ ವಿವರ:- ಹೊಸ ಶೌಚಾಲಯ ರಹಿತ ಕುಟುಂಬಗಳಿಗೆ ಶೌಚಾಲಯಗಳ ನಿರ್ಮಾಣ ಹಾಗೂ ಬಳಕೆಗೆ ಉತ್ತೇಜನ. ಸಮುದಾಯ/ ಸಾರ್ವಜನಿಕ ಶೌಚಾಲಯಗಳ ನಿರ್ಮಾಣ, ಘನ ಮತ್ತು ದ್ರವತ್ಯಾಜ್ಯ ನಿರ್ವಹಣೆ, Material Recovery Facility (MRF) ಘಟಕಗಳ ನಿರ್ಮಾಣ, ಮಲ ತ್ಯಾಜ್ಯ ನಿರ್ವಹಣಾ ಘಟಕಗಳ ನಿರ್ಮಾಣ (FSM) ಹಾಗೂ ಗೋಬರ್-ಧನ್ ಘಟಕಗಳ ನಿರ್ಮಾಣ. ಪ್ರಸಕ್ತ ಸಾಲಿನಲ್ಲಿ ಕೊಡಗು, ದಕ್ಷಿಣ ಕನ್ನಡ, ಉಡುಪಿ ಹಾಗೂ ಗದಗ ಜಿಲ್ಲೆಗಳನ್ನು ಸಂಪೂರ್ಣವಾಗಿ ODF Plus ಮಾಡಲು ಗುರಿ ನಿಗದಿಪಡಿಸಲಾಗಿದ್ದು, ಅದರಂತೆ ಕ್ರಮವಹಿಸಲಾಗಿದೆ.
(ಆ)	ಎಷ್ಟು ಗ್ರಾಮ ಪಂಚಾಯಿತಿಗಳಲ್ಲಿ ಈಗಾಗಲೇ ಹಸಿಕಸ ಮತ್ತು ಒಣಕಸ ಎಂದು ಪ್ರತ್ಯೇಕಿಸಿ ಸಂಗ್ರಹಿಸಲಾಗುತ್ತಿದೆ; (ತಾಲ್ಲೂಕುವಾರು ವಿವರ ನೀಡುವುದು)	ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯಡಿ ಘನ ಮತ್ತು ದ್ರವತ್ಯಾಜ್ಯ ನಿರ್ವಹಣೆಗಾಗಿ ಈವರೆಗೆ 3457 ಗ್ರಾ.ಪಂ.ಗಳ ವಿಸ್ತೃತ ಯೋಜನಾ ವರದಿಗಳಿಗೆ ರೂ.32692.69 ಲಕ್ಷಗಳಿಗೆ ಅನುಮೋದನೆ ನೀಡಿ, ರೂ.20767.46 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. ಪ್ರಸ್ತುತ 936 ಗ್ರಾಮ ಪಂಚಾಯಿತಿಗಳಲ್ಲಿ ಘನ ಮತ್ತು ದ್ರವತ್ಯಾಜ್ಯ ನಿರ್ವಹಣಾ ಘಟಕಗಳು ಕಾರ್ಯಾಚರಣೆಯಲ್ಲಿದ್ದು, ಇತರೆ 2521 ಗ್ರಾ.ಪಂ.ಗಳಲ್ಲಿ ಘಟಕಗಳ ಕಾಮಗಾರಿಗಳು ಪ್ರಗತಿ ಹಂತದಲ್ಲಿದ್ದು, ಶೀಘ್ರದಲ್ಲಿ ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ.
(ಇ)	ಎಷ್ಟು ಗ್ರಾಮಗಳಲ್ಲಿ ಈಗಾಗಲೇ ಒಳಚರಂಡಿ ವ್ಯವಸ್ಥೆ ಇದೆ; (ಸಂಪೂರ್ಣ ಮಾಹಿತಿ ನೀಡುವುದು)	ಮೈಸೂರು ಜಿಲ್ಲೆಯ ಇಳವಾಲ ಹಾಗೂ ಸುತ್ತೂರು ಗ್ರಾಮ ಪಂಚಾಯಿತಿಗಳಲ್ಲಿ ಅತಿ ಹೆಚ್ಚು ಜನಸಂಖ್ಯೆ ಇದ್ದ ಕಾರಣ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಜಿಲ್ಲೆಯಿಂದ ಪ್ರಸ್ತಾವನೆ ಸಲ್ಲಿಸಲಾಗಿದ್ದು, ರಾಜ್ಯ ಘಟಕದ ಅನುದಾನದಲ್ಲಿ ವಿಶೇಷ ಪ್ರಕರಣ ಎಂದು ಪರಿಗಣಿಸಿ ಅನುಷ್ಠಾನ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿರುತ್ತದೆ.

<table>
<tr><td>(ಈ)</td><td>ಉಳಿದ ಗ್ರಾಮಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ಚಿಂತಿಸಿದೆಯೇ;</td><td>SBM- G Phase II ಮಾರ್ಗಸೂಚಿಯಂತೆ ದ್ರವ ತ್ಯಾಜ್ಯ ನಿರ್ವಹಣೆ ಗೆ ಸಂಬಂಧಿಸಿದಂತೆ ವೈಯಕ್ತಿಕ ಹಾಗೂ ಸಮುದಾಯ ಹಂತದಲ್ಲಿ ಇಂಗು ಗುಂಡಿಗಳ ನಿರ್ಮಾಣ. Waste Stabilization Pond (WSP), Faecal Sludge Management (FSM) ಚಟುವಟಿಕೆಗಳಿಗೆ ಅವಕಾಶ ನೀಡಲಾಗಿದೆ. ಅದರಂತೆ ಎಲ್ಲಾ ಗ್ರಾಮಗಳಲ್ಲಿ ಸದರಿ ಚಟುವಟಿಕೆಗಳನ್ನು ಅನುಷ್ಠಾನ ಮಾಡಲು ಕ್ರಮವಹಿಸಲಾಗುತ್ತಿದೆ.</td></tr>
<tr><td>(ಉ)</td><td>ಹಾಗಿದ್ದಲ್ಲಿ, ಇದುವರೆವಿಗೂ ಈ ಯೋಜನೆಗಳಿಗಾಗಿ ಖರ್ಚು ಮಾಡಲಾದ ಅನುದಾನವೆಷ್ಟು? (ವರ್ಷಾವಾರು ವಿವರ ನೀಡುವುದು)</td><td>1) ಒಳಚರಂಡಿ ನಿರ್ಮಾಣಕ್ಕೆ ವೆಚ್ಚ ಮಾಡಲಾದ ವಿವರ:

(ರೂ.ಲಕ್ಷಗಳಲ್ಲಿ)
<table><tr><th>ತಾಲ್ಲೂಕು</th><th>ಗ್ರಾ.ಪಂ</th><th>ಒಟ್ಟು ಮಂಜೂರಾತಿ</th><th>ಬಿಡುಗಡೆ</th><th>ವೆಚ್ಚ</th></tr><tr><td>ಮೈಸೂರು</td><td>ಇಲವಾಲ</td><td>2300.00</td><td>766.00</td><td>532.14</td></tr><tr><td rowspan="2">ನಂಜನಗೂಡು</td><td>ಸುತ್ತೂರು ಫೇಸ್-1</td><td>498.00</td><td>498.00</td><td>466.94</td></tr><tr><td>ಸುತ್ತೂರು ಫೇಸ್-2</td><td>626.00</td><td>313.00</td><td>-</td></tr></table>
2) ದ್ರವತ್ಯಾಜ್ಯ ನಿರ್ವಹಣೆಗೆ ವೆಚ್ಚ ಮಾಡಲಾದ ವಿವರ: 4464 ಗ್ರಾಮ ಪಂಚಾಯಿತಿಗಳಲ್ಲಿ ದ್ರವತ್ಯಾಜ್ಯ ನಿರ್ವಹಣೆಗೆ ಒಟ್ಟಾರೆ ರೂ. 821.40 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಈ ಪೈಕಿ ಮೊದಲನೇ ಕಂತಿನ ಅನುದಾನವಾಗಿ ರೂ.205.35 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.</td></tr>
</table>

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಆಯುಕ್ತರವರ ಕಛೇರಿ, ಗ್ರಾ.ಕುನೀ.&.ನೈ.ಇ., 2ನೇ ಮಹಡಿ, "ಇ" ಬ್ಲಾಕ್, ಕೆಹೆಚ್‌ಬಿ ಕಟ್ಟಡ,
ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು–560009. ☎:080–22240508 📠:22240509
ಇ–ಮೇಲ್: krwssd@gmail.com

ಸಂ:ಗ್ರಾಕುನೀ&ನೈಇ/133/ಗ್ರಾನೀಸ(4)2020 ದಿನಾಂಕ:02.02.2021.

13/u/s
3/2/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು–01.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ **ರಂಗನಾಥ್ ಹೆಚ್.ಡಿ. ಡಾ॥ (ಕುಣಿಗಲ್)** ಇವರ **ಚುಕ್ಕೆ ರಹಿತ ಪ್ರಶ್ನೆ ಸಂ:367ಕ್ಕೆ** ಸಂಬಂಧಿಸಿದ ಮೇಲಿನ ಕ್ರಮ/ವಾಸ್ತವಿಕ ವರದಿಯ ಉತ್ತರ ನೀಡುವ ಬಗ್ಗೆ.

******

ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ **ರಂಗನಾಥ್ ಹೆಚ್.ಡಿ. ಡಾ॥ (ಕುಣಿಗಲ್)** ಇವರ **ಚುಕ್ಕೆ ರಹಿತ ಪ್ರಶ್ನೆ ಸಂ:367ಕ್ಕೆ** ಉತ್ತರದ <u>**25**</u> ಪ್ರತಿಗಳನ್ನು ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ತಮ್ಮ ವಿಶ್ವಾಸಿ,
02/2/2021
ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರಿಗೆ

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ರಂಗನಾಥ್ ಹೆಚ್.ಡಿ. ಡಾ॥ (ಕುಣಿಗಲ್)
ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 367
ಉತ್ತರ ದಿನಾಂಕ : 03.02.2021

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಕುಣಿಗಲ್ ತಾಲ್ಲೂಕಿನಲ್ಲಿ ಓವರ್‌ಹೆಡ್ ಟ್ಯಾಂಕ್ ಕೊರತೆಯಿಂದಾಗಿ ಸಮರ್ಪಕ ನೀರು ಸರಬರಾಜಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	-ಬಂದಿದೆ-
ಆ)	ಬಂದಿದ್ದಲ್ಲಿ, ಕುಣಿಗಲ್ ತಾಲ್ಲೂಕಿನಲ್ಲಿ ನಿರ್ಮಾಣ ಹಂತದಲ್ಲಿರುವ ಓವರ್‌ಹೆಡ್ ಟ್ಯಾಂಕ್‌ಗಳ ಕಾಮಗಾರಿಗಳ ಅನುದಾನದ ಕೊರತೆಯಿಂದಾಗಿ ಅರ್ಧಕ್ಕೆ ಸ್ಥಗಿತಗೊಂಡಿದ್ದು, ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ಅಗತ್ಯವಿರುವ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು;	ನಿರ್ಮಾಣ ಹಂತದಲ್ಲಿರುವ ಓವರ್‌ಹೆಡ್ ಟ್ಯಾಂಕ್‌ಗಳ ಕಾಮಗಾರಿಗಳ ಅನುದಾನ ಕೊರತೆಯಿಂದಾಗಿ ಯಾವುದೇ ಕಾಮಗಾರಿಗಳು ಸ್ಥಗಿತಗೊಂಡಿರುವುದಿಲ್ಲ. ಕಾಮಗಾರಿಯ ಪ್ರಗತಿಗನುಗುಣವಾಗಿ ಕಾಲಕಾಲಕ್ಕೆ ಸಲ್ಲಿಸುವ ಬಿಲ್ಲುಗಳಿಗೆ ಹಣ ಪಾವತಿ ಮಾಡಲಾಗುವುದು. ಯಾವುದೇ ಕಾಮಗಾರಿಯು ಪ್ರಸಕ್ತ ಸಾಲಿನ ಆರ್ಥಿಕ ವರ್ಷಾಂತ್ಯದಲ್ಲಿ ಪೂರ್ಣಗೊಳ್ಳದಿದ್ದಲ್ಲಿ ಅಂತಹ ಕಾಮಗಾರಿಗಳನ್ನು ಮುಂದುವರೆದ ಕಾಮಗಾರಿಗಳೆಂದು ಪರಿಗಣಿಸಿ ಅವಶ್ಯಕ ಅನುದಾನದ ಬೇಡಿಕೆಯೊಂದಿಗೆ ಕ್ರಿಯಾ ಯೋಜನೆಯಲ್ಲಿ ಅನುಮೋದನೆ ಪಡೆದುಕೊಂಡು ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮವಹಿಸಲಾಗುವುದು.
ಇ)	ಈಗಾಗಲೇ ಬಳಕೆಯಲ್ಲಿರುವ ಓವರ್‌ಹೆಡ್ ಟ್ಯಾಂಕ್‌ಗಳು ಸಮರ್ಪಕ ನಿರ್ವಹಣೆ ಇಲ್ಲದೇ ಇರುವುದರಿಂದ ಕುಡಿಯುವ ನೀರಿಗೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಓವರ್‌ಹೆಡ್ ಟ್ಯಾಂಕ್‌ನ ನಿರ್ವಹಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;	-ಬಂದಿದೆ- 15ನೇ ಹಣಕಾಸು ಯೋಜನೆ ಹಾಗೂ ಇತರೆ ಯೋಜನೆಗಳ ಅಡಿಯಲ್ಲಿ ನೀಡುವ ಅನುದಾನದಲ್ಲಿ ಕ್ರಿಯಾ ಯೋಜನೆ ರೂಪಿಸಿಕೊಂಡು ನಿರ್ವಹಣೆ ಮಾಡಲು ಕ್ರಮವಹಿಸಲಾಗಿದೆ.
ಈ)	ಓವರ್‌ಹೆಡ್ ಟ್ಯಾಂಕ್‌ಗಳ ನಿರ್ವಹಣೆಗೆ ಸೂಕ್ತ ಕ್ರಮಕೈಗೊಳ್ಳದಿರುವ ಏಜೆನ್ಸಿ/ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಓವರ್‌ಹೆಡ್ ಟ್ಯಾಂಕ್‌ಗಳ ನಿರ್ಮಾಣವು ಪೂರ್ಣಗೊಂಡ ನಂತರ ಕಾರ್ಯಾಚರಣೆಗೊಳಿಸಿ ಸಂಬಂಧಿಸಿದ ಗ್ರಾಮ ಪಂಚಾಯಿತಿಗಳಿಗೆ ಮುಂದಿನ ದಿನಗಳ ನಿರ್ವಹಣೆ ಮತ್ತು ಕಾರ್ಯಾಚರಣೆಗಾಗಿ ಯೋಜನೆಯನ್ನು ಹಸ್ತಾಂತರಿಸಲಾಗುತ್ತಿದೆ. ಗ್ರಾಮ ಪಂಚಾಯಿತಿಗಳಲ್ಲಿ ಲಭ್ಯವಿರುವ ಅನುದಾನಗಳಲ್ಲಿ ನಿರ್ವಹಣಾ ಕಾರ್ಯವನ್ನು ನಿರ್ವಹಿಸಲಾಗುತ್ತಿದೆ.

ಸಂ:ಗ್ರಾಕುನೀ&ನೈಇ 133 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂ: ಟಿಡಿ 25 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 03.02.2021.

U/S 26
3/2/21

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

ಇವರಿಗೆ:

ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಅಪ್ಪಚ್ಚು ರಂಜನ್ ಎಂ.ಪಿ., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 656. ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಅಪ್ಪಚ್ಚು ರಂಜನ್ ಎಂ.ಪಿ., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 656 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Mala S 03/02/2021

(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 656

ಸದಸ್ಯರ ಹೆಸರು : ಶ್ರೀ ಅಪ್ಪಚ್ಚು (ರಂಜನ್) ಎಂ.ಪಿ.(ಮಡಿಕೇರಿ)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 03-02-2021

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಕುಶಾಲನಗರದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ ಡಿಪೋಗೆ ಜಾಗ ಕಾಯ್ದಿರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕುಶಾಲನಗರದಲ್ಲಿ ಮುಂದಿನ ದಿನಗಳಲ್ಲಿ ಸಾರಿಗೆ ಅವಶ್ಯಕತೆಗೆ ಅನುಗುಣವಾಗಿ ಸಾರಿಗೆ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಬಸವನಹಳ್ಳಿ ಗ್ರಾಮದ ಸರ್ವೆ ಸಂಖ್ಯೆ: 1/1ರಲ್ಲಿ 4.00 ಎಕರೆ ನಿವೇಶನವನ್ನು ಕ.ರಾ.ರ.ಸಾ.ನಿಗಮದ ವಶಕ್ಕೆ ಪಡೆಯಲಾಗಿದೆ.
ಆ)	ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ನಿಗಮಕ್ಕೆ ಡಿಪೋ ಕಾಮಗಾರಿ ಯಾವಾಗ ಕೈಗೊಳ್ಳಲಾಗುವುದು; ಇದಕ್ಕಾಗಿ ಮೀಸಲಿಟ್ಟ ಅನುದಾನವೆಷ್ಟು; ವಿಳಂಬಕ್ಕೆ ಕಾರಣವೇನು (ಪೂರ್ಣ ವಿವರ ನೀಡುವುದು)	ಪ್ರಸ್ತುತ ಕುಶಾಲನಗರ ಭಾಗದ ಸಾರಿಗೆ ಅವಶ್ಯಕತೆಗಳನ್ನು ಮಡಿಕೇರಿ ಘಟಕ, ಪಿರಿಯಾಪಟ್ಟಣ ಘಟಕ ಮತ್ತು ಮೈಸೂರು ಘಟಕಗಳಿಂದ ಪೂರೈಸಲಾಗುತ್ತಿದೆ. ಆದಾಗ್ಯೂ, ಮುಂದಿನ ದಿನಗಳಲ್ಲಿ ಸಾರಿಗೆ ಅವಶ್ಯಕತೆ ದೃಷ್ಟಿಯಿಂದ ನಿವೇಶನವನ್ನು ಪಡೆಯಲಾಗಿರುತ್ತದೆ. ಪ್ರಸ್ತುತ ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ನಿಗಮವು ತೀವ್ರ ಆರ್ಥಿಕ ಸಂಕಷ್ಟದಲ್ಲಿದ್ದು, ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಕಷ್ಟಕರವಾಗಿರುತ್ತದೆ. ನಿಗಮದ ಆರ್ಥಿಕ ಪರಿಸ್ಥಿತಿ ಸುಧಾರಿಸಿದ ನಂತರ ನಿಗಮವು ಹೊರಡಿಸಿರುವ ಸುತ್ತೋಲೆ ಸಂಖ್ಯೆ: 01/2015-16, ದಿನಾಂಕ: 06.06.2015ರ ಮಾರ್ಗಸೂಚಿ ಪ್ರಕಾರ ಅಗತ್ಯತೆಗೆ ಹಾಗೂ ಆರ್ಥಿಕ ಪರಿಸ್ಥಿತಿಗೆ ಅನುಗುಣವಾಗಿ ಈ ಬಗ್ಗೆ ಪರಿಶೀಲಿಸಲಾಗುವುದು.
ಇ)	ಮಡಿಕೇರಿ ಘಟಕದಲ್ಲಿ ತುಂಬಾ ಹಳೆಯ ಬಸ್ ಚಾಲನೆಯಲ್ಲಿದ್ದು, ಇದರಿಂದ ಪ್ರಯಾಣಿಕರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ನೂತನ ಬಸ್ ನೀಡಲು ಸರ್ಕಾರ ತೆಗೆದುಕೊಂಡ ಕ್ರಮವೇನು? (ಪೂರ್ಣ ವಿವರ ನೀಡುವುದು)	ಕ.ರಾ.ರ.ಸಾ.ನಿಗಮದ ಪುತ್ತೂರು ವಿಭಾಗದ ಮಡಿಕೇರಿ ಘಟಕದಲ್ಲಿ ಒಟ್ಟು 112 ವಾಹನಗಳು ಕಾರ್ಯಾಚರಣೆಯಲ್ಲಿದ್ದು, ಅವುಗಳಲ್ಲಿ 6.0 ಲಕ್ಷ ಕಿ.ಮೀ. ಕ್ಕಿಂತಕಡಿಮೆ ಕ್ರಮಿಸಿರುವ 41 ಹೊಸ ವಾಹನ ಮತ್ತು 6.0 ಲಕ್ಷ ಕಿ.ಮೀ.ಗಳಿಗಿಂತ ಹೆಚ್ಚು ಕ್ರಮಿಸಿರುವ 71 ವಾಹನಗಳಿರುತ್ತವೆ. ನಿಗಮದಲ್ಲಿ ಸಾಮಾನ್ಯ/ನಾನ್ ಎಸಿ ಮಾದರಿ ವಾಹನಗಳನ್ನು 9.0 ಲಕ್ಷ ಸವಕಳಿ ಕಿ.ಮೀ. ಕ್ರಮಿಸಿದ ನಂತರ ಭೌತಿಕ ಹಾಗೂ ತಾಂತ್ರಿಕ ಸ್ಥಿತಿಗಳನ್ನಾಧರಿಸಿ ನಿಷ್ಕ್ರಿಯಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿರುತ್ತದೆ. ಸರ್ಕಾರದ ನಿಯಮಾವಳಿಗಳನ್ವಯ 15 ವರ್ಷಕ್ಕಿಂತ ಮೇಲ್ಪಟ್ಟ ವಾಹನಗಳನ್ನು ಕಡ್ಡಾಯವಾಗಿ ನಿಷ್ಕ್ರಿಯೆಗೊಳಿಸಲಾಗುತ್ತಿರುತ್ತದೆ. ಉಳಿದಂತೆ ಕವಚ ದೋಷಗಳು ಕಂಡುಬಂದಂತಹ ವಾಹನಗಳನ್ನು ಹಾಗೂ ಅರ್ಹತಾ ಪತ್ರ ನವೀಕರಣದ ವಾಹನಗಳನ್ನು ಹೆಚ್ಚುವರಿ ಕವಚ ದುರಸ್ತಿಗೊಳಪಡಿಸಿ ಕಾರ್ಯಾಚರಣೆಗೊಳಿಸಲಾಗುತ್ತಿರುತ್ತದೆ.

...2

ಮುಂದುವರೆದು, ಕಳೆದ 05 ವರ್ಷಗಳಲ್ಲಿ ನಿಯೋಜಿಸಲಾದ ಹೊಸ ವಾಹನಗಳ ಹಾಗೂ ನಿರುಪಯುಕ್ತಗೊಳಿಸಲಾದ ವಾಹನಗಳ ವಿವರಗಳು ಕೆಳಕಂಡಂತಿರುತ್ತವೆ:

ವರ್ಷ	ಘಟಕಕ್ಕೆ ನೀಡಲಾದ ಹೊಸ ವಾಹನಗಳ ಒಟ್ಟು ಸಂಖ್ಯೆ	ನಿರುಪಯುಕ್ತಗೊಳಿಸಲಾದ ವಾಹನಗಳ ಒಟ್ಟು ಸಂಖ್ಯೆ
2016–2017	13	05
2017–2018	19	14
2018–2019	04	04
2019–2020	09	08
2020–2021	04	09
ಒಟ್ಟು	49	40

ಪ್ರಸ್ತುತ ಸಾಲಿನಲ್ಲಿ ಇದುವರೆಗೆ ಮಡಿಕೇರಿ ಘಟಕಕ್ಕೆ 04 ಹೊಸ ವಾಹನಗಳನ್ನು ನಿಯೋಜಿಸಲಾಗಿದ್ದು, ಪ್ರಯಾಣಿಕರಿಗೆ ಯಾವುದೇ ತರಹದ ತೊಂದರೆಯುಂಟಾಗದ ರೀತಿಯಲ್ಲಿ ವಾಹನಗಳನ್ನು ಸುಗಮ ಕಾರ್ಯಾಚರಣೆ ಮಾಡಲಾಗುತಿರುತ್ತದೆ. ಮುಂದಿನ ದಿನಗಳಲ್ಲಿಯೂ ಸಹ ಅವಶ್ಯಕತೆಗೆ ಅನುಗುಣವಾಗಿ ಹೊಸ ವಾಹನಗಳನ್ನು ಸೇರ್ಪಡೆಗೊಳಿಸಲಾಗುವುದು. ಅಂತೆಯೇ, ನಿಗದಿತ ಕಿಮೀ ಕ್ರಮಿಸಿರುವ ವಾಹನಗಳ ಭೌತಿಕ ಹಾಗೂ ತಾಂತ್ರಿಕ ಸ್ಥಿತಿಗಳನ್ನಾಧರಿಸಿ ನಿಷ್ಕ್ರಿಯಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ಟಿಡಿ 25 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಪಸಂಮೀಇ-06 ಪಸಸೇ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು ದಿನಾಂಕ: 01.02.2021

33
U/S
03/2/21

ಇವರಿಂದ :-
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
ಬೆಂಗಳೂರು.

ಇವರಿಗೆ :-
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ
ವಿಧಾನ ಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ:- ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ. ಬಂಡೆಪ್ಪ ಖಾಶೆಂಪೂರ್ (ಬೀದರ್ ದಕ್ಷಿಣ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 577 ಕ್ಕೆ ಉತ್ತರ ಒದಗಿಸುವ ಬಗ್ಗೆ.

****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ. ಬಂಡೆಪ್ಪ ಖಾಶೆಂಪೂರ್ (ಬೀದರ್ ದಕ್ಷಿಣ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 577 ಕ್ಕೆ ಕನ್ನಡ ಉತ್ತರದ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿತಳಾಗಿದ್ದೇನೆ.

ತಮ್ಮ ನಂಬುಗೆಯ,

Kavya H.N. 01/02/2021
(ಕಾವ್ಯ ಹೆಚ್.ಎನ್.)
ಪೀಠಾಧಿಕಾರಿ-2
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
(ಪಶುಸಂಗೋಪನೆ-ಎ)
01/2/2021

ಪ್ರತಿ:

ಮಾನ್ಯ ಪಶುಸಂಗೋಪನೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	577
ಸದಸ್ಯರ ಹೆಸರು	:	ಶ್ರೀ.ಬಂಡೆಪ್ಪ ಖಾಶೆಂಪೂರ್ (ಬೀದರ್ ದಕ್ಷಿಣ)
ಉತ್ತರಿಸುವ ದಿನಾಂಕ	:	03.02.2021
ಉತ್ತರಿಸುವ ಸಚಿವರು	:	ಪಶುಸಂಗೋಪನೆ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ)</td><td>ಬೀದರ್ ದಕ್ಷಿಣ ಕ್ಷೇತ್ರದಲ್ಲಿ ಎಷ್ಟು ಪಶು ಚಿಕಿತ್ಸಾಲಯ ಮತ್ತು ಪಶು ಚಿಕಿತ್ಸಾ ಕೇಂದ್ರಗಳಿವೆ;</td><td>ಬೀದರ್ ದಕ್ಷಿಣ ಕ್ಷೇತ್ರದಲ್ಲಿ ಒಟ್ಟು 05 ಪಶು ಆಸ್ಪತ್ರೆ ಮತ್ತು 14 ಪಶುಚಿಕಿತ್ಸಾಲಯಗಳು ಕಾರ್ಯನಿರ್ವಹಿಸುತ್ತಿರುತ್ತವೆ.</td></tr>
<tr><td>ಆ)</td><td>ಪಶುಚಿಕಿತ್ಸಾಲಯ ಮತ್ತು ಪಶು ಚಿಕಿತ್ಸಾ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯಾಧಿಕಾರಿಗಳು ಹಾಗೂ ಇತರೆ ಸಿಬ್ಬಂದಿಗಳ ಸಂಖ್ಯೆ ಎಷ್ಟು ಹಾಗೂ ಅದಕ್ಕೆ ಅನುಗುಣವಾಗಿ ವೈದ್ಯರು ಮತ್ತು ಸಿಬ್ಬಂದಿಗಳನ್ನು ಒದಗಿಸಲಾಗಿದೆಯೇ;</td><td>ಪಶುಚಿಕಿತ್ಸಾಲಯ ಮತ್ತು ಪಶುಚಿಕಿತ್ಸಾ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಶುವೈದ್ಯಾಧಿಕಾರಿಗಳ ಹಾಗೂ ಇತರೆ ಸಿಬ್ಬಂದಿಗಳ ಸಂಖ್ಯೆ ಈ ಕೆಳಕಂಡಂತೆ ನೀಡಲಾಗಿದೆ.
<table>
<tr><th>ಕ್ರ. ಸಂ</th><th>ಹುದ್ದೆ</th><th>ಮಂಜೂರು</th><th>ಭರ್ತಿ</th><th>ಖಾಲಿ</th></tr>
<tr><td>1</td><td>ಮುಖ್ಯ ಪಶುವೈದ್ಯಾಧಿಕಾರಿ/ ಹಿರಿಯ ಪಶುವೈದ್ಯಾಧಿಕಾರಿ/ ಪಶುವೈದ್ಯಾಧಿಕಾರಿ</td><td>19</td><td>19</td><td>0</td></tr>
<tr><td>2</td><td>ಜಾನುವಾರು ಅಧಿಕಾರಿ</td><td>05</td><td>02</td><td>03</td></tr>
<tr><td>3</td><td>ಹಿರಿಯ ಪಶುವೈದ್ಯಕೀಯ ಪರೀಕ್ಷಕರು</td><td>12</td><td>12</td><td>0</td></tr>
<tr><td>4</td><td>ಪಶುವೈದ್ಯಕೀಯ ಸಹಾಯಕರು</td><td>02</td><td>02</td><td>0</td></tr>
<tr><td>5</td><td>ಡಿ ದರ್ಜೆ ನೌಕರರು</td><td>36</td><td>03</td><td>33</td></tr>
<tr><td></td><td>ಒಟ್ಟು</td><td>74</td><td>38</td><td>36</td></tr>
</table></td></tr>
<tr><td>ಇ)</td><td>ಇಲ್ಲದಿದ್ದಲ್ಲಿ, ಅಗತ್ಯ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದೆ;</td><td>ಪಶುವೈದ್ಯಾಧಿಕಾರಿ/ ಹಿರಿಯ ಪಶುವೈದ್ಯಕೀಯ ಪರೀಕ್ಷಕರು/ಪಶುವೈದ್ಯಕೀಯ ಸಹಾಯಕರ ಹುದ್ದೆಗಳು ಭರ್ತಿಯಾಗಿರುತ್ತವೆ. ಖಾಲಿಯಿರುವ 03 ಜಾನುವಾರು ಅಧಿಕಾರಿ ಹುದ್ದೆಗಳು ಮುಂಬಡ್ತಿ ಹುದ್ದೆಗಳಾಗಿದ್ದು, ಈ ಹಿಂದಿನ ಮುಂಬಡ್ತಿ ಆದೇಶ ಕುರಿತಂತೆ ಕೆಲವು ವೃಂದಗಳಾದ ಜಾನುವಾರು ಅಧಿಕಾರಿ, ಹಿರಿಯ ಪಶುವೈದ್ಯಕೀಯ ಪರೀಕ್ಷಕರು ಹಾಗೂ ಪಶು ವೈದ್ಯಕೀಯ ಪರೀಕ್ಷಕರು ನ್ಯಾಯಾಲಯದ ಮೊರೆ ಹೋಗಿದ್ದು ಪ್ರಕರಣ ಇನ್ನು ಇತ್ಯರ್ಥಗೊಂಡಿರುವುದಿಲ್ಲ. ನ್ಯಾಯಾಲಯದಲ್ಲಿ ಪ್ರಕರಣ ಇತ್ಯರ್ಥಗೊಂಡ ನಂತರ ಖಾಲಿ ಇರುವ</td></tr>
</table>

		ಮುಂಬಡ್ತಿ ಹುದ್ದೆಗಳನ್ನು ಮುಂಬಡ್ತಿ ಮುಖಾಂತರ ಭರ್ತಿ ಮಾಡಲು ಕ್ರಮ ವಹಿಸಲಾಗುವುದು. ಮುಂದುವರೆದು, ಖಾಲಿ ಇರುವ 33 "ಡಿ" ದರ್ಜೆ ನೌಕರರ ಹುದ್ದೆಗಳ ಎದುರಾಗಿ 11 ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಸೇವೆ ಪಡೆಯಲಾಗುತ್ತಿದೆ. ಸದರಿ ವೃಂದದಲ್ಲಿ ಖಾಲಿ ಇರುವ ನೇರ ನೇಮಕಾತಿಯ ಹುದ್ದೆಗಳಿಗೆ ನೇಮಕಾತಿಯನ್ನು ಆರ್ಥಿಕ ಮಿತವ್ಯಯದ ಕಾರಣ ತಾತ್ಕಾಲಿಕವಾಗಿ ತಡೆಹಿಡಿಯಲಾಗಿರುತ್ತದೆ.
ಈ)	ಕ್ಷೇತ್ರದಲ್ಲಿ ಹೊಸದಾಗಿ ಪಶು ಚಿಕಿತ್ಸಾ ಕೇಂದ್ರಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?	ಪ್ರಸಕ್ತ ಸಾಲಿನಲ್ಲಿ ನೂತನವಾಗಿ ಪಶುಚಿಕಿತ್ಸಾ ಕೇಂದ್ರಗಳನ್ನು ಪ್ರಾರಂಭಿಸುವ ಯಾವುದೇ ಯೋಜನೆ ಸರ್ಕಾರದ ಮುಂದಿರುವುದಿಲ್ಲ.

ಸಂ: ಪಸಂಮೀ ಇ-06 ಪಸಸೇ 2021

(ಪ್ರಭು.ಬಿ.ಚವ್ಹಾಣ್)
ಪಶುಸಂಗೋಪನೆ ಸಚಿವರು

ಕರ್ನಾಟಕ ಸರ್ಕಾರ

ಸಂ:ಟಿಡಿ 06 ಟಿಡಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:01-02-2021.

178
4/5
3/2/21

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೆ,

ವಿಷಯ: ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:378 ಕ್ಕೆ ಉತ್ತರ ನೀಡುವ ಬಗ್ಗೆ.
ಉಲ್ಲೇಖ: ಪ್ರಶಾವಿಸ/15ನೇವಿಸ/9ಅ/ಪ್ರಸಂ.378/2021, ದಿನಾಂಕ:25-01-2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ ಡಾ|| ಯತೀಂದ್ರ ಸಿದ್ದರಾಮಯ್ಯ (ವರುಣ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:378ಕ್ಕೆ ಸಂಬಂಧಿಸಿದ ಉತ್ತರದ ಕನ್ನಡ ಭಾಷೆಯ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ಮುಂದುವರೆದು, ಸದರಿ ಉತ್ತರವನ್ನು dsqb-kla-kar@nic.in ಇ-ಮೇಲ್ ಮುಖಾಂತರ ಕಳುಹಿಸಲಾಗಿದೆ.

ತಮ್ಮ ನಂಬುಗೆಯ,
01/02/21
(ರಂಗಪ್ಪ ಕರಿಗಾರ)
ಶಾಖಾಧಿಕಾರಿ, ಸಾರಿಗೆ-2,
ಸಾರಿಗೆ ಇಲಾಖೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 378

ಸದಸ್ಯರ ಹೆಸರು : ಡಾ॥ ಯತೀಂದ್ರ ಸಿದ್ದರಾಮಯ್ಯ (ವರುಣ)

ಉತ್ತರಿಸಬೇಕಾದ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 03-02-2021

<table>
<tr><th>ಕ್ರ ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಟ್ಯಾಕ್ಸಿ ಮತ್ತು ಆಟೋ ಚಾಲಕರಿಗೆ ಲಾಕ್‌ಡೌನ್ ಸಂದರ್ಭದಲ್ಲಿ ಘೋಷಿಸಲಾದ ಪ್ಯಾಕೇಜ್ ಸೌಲಭ್ಯ ಎಲ್ಲಾ ಫಲಾನುಭವಿಗಳಿಗೆ ತಲುಪಿದೆಯೇ:</td><td rowspan="2">
ರಾಜ್ಯದ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರಿಗೆ ಮಾತ್ರ ಒಮ್ಮೆ ಪರಿಹಾರವಾಗಿ ರೂ.5,000/-ಗಳ ಪರಿಹಾರ ಧನವನ್ನು ಷರತ್ತುಗಳಿಗೊಳಪಟ್ಟು ನೀಡಲು ಮಂಜೂರಾತಿ ನೀಡಿ ಆದೇಶಿಸಲಾಗಿರುತ್ತದೆ.

ಈ ಸಂಬಂಧ ಸರ್ಕಾರದ ಆದೇಶ ಸಂಖ್ಯೆ: ಟಿಡಿ 121 ಟಿಡಿಒ 2020, ದಿನಾಂಕ:16-05-2020, ದಿನಾಂಕ:10-06-2020 ಮತ್ತು 04-08-2020 ರ ಆದೇಶಗಳಲ್ಲಿ ಸದರಿ ಯೋಜನೆಗೆ ಒಟ್ಟು ರೂ.117.51 ಕೋಟಿಗಳ ಸಹಾಯಧನವನ್ನು ಮಂಜೂರು ಮಾಡಲಾಗಿರುತ್ತದೆ.

ಸೇವಾ ಸಿಂಧು ವೆಬ್ ಪೋರ್ಟಲ್‌ನಲ್ಲಿ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರು ಪರಿಹಾರ ಧನ ಕೋರಿ ಸಲ್ಲಿಸಿರುವ ಅರ್ಹ ಫಲಾನುಭವಿಗಳ ಖಾತೆಗಳಿಗೆ ಡಿ.ಬಿ.ಟಿ ಮೂಲಕ ನೇರವಾಗಿ ಪರಿಹಾರ ಧನವನ್ನು ಜಮೆ ಮಾಡಲಾಗಿರುತ್ತದೆ.

ಸೇವಾ ಸಿಂಧು ವೆಬ್ ಪೋರ್ಟಲ್‌ನಲ್ಲಿ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರು ಪರಿಹಾರ ಧನ ಕೋರಿ ಸ್ವೀಕೃತವಾಗಿರುವ ಅರ್ಜಿಗಳ ವಿವರ ಈ ಕೆಳಕಂಡಂತಿದೆ:
<table>
<tr><td>1.</td><td>ಒಟ್ಟು ಸ್ವೀಕೃತವಾದ ಅರ್ಜಿಗಳು</td><td>2,45,852</td></tr>
<tr><td>2.</td><td>ಫಲಾನುಭವಿಗಳಿಗೆ ಪರಿಹಾರ ಧನವನ್ನು ವಿತರಿಸಲಾಗಿರುವ ಅರ್ಜಿಗಳು</td><td>2,15,612</td></tr>
<tr><td>3.</td><td>ಚಾಲನಾ ಅನುಜ್ಞಾ ಪತ್ರ ಮತ್ತು ಆಧಾರ್ ಕಾರ್ಡಿನ ವಿವರಗಳಲ್ಲಿ ಹೊಂದಾಣಿಕೆಯಿಲ್ಲದ ಕಾರಣ ತಿರಸ್ಕೃತಗೊಂಡ ಅರ್ಜಿಗಳು</td><td>2,507</td></tr>
<tr><td>4.</td><td>ಬಾಕಿ ಇರುವ ಅರ್ಜಿಗಳು</td><td>2,676</td></tr>
<tr><td>5.</td><td>I.D validation ಅನುತ್ತೀರ್ಣ, ಡಿ.ಬಿ.ಟಿ ಅನುತ್ತೀರ್ಣ ಒಟ್ಟು ಅರ್ಜಿಗಳು</td><td>25,057</td></tr>
</table>
I.D validation ಅನುತ್ತೀರ್ಣ ತಾಂತ್ರಿಕ ಸಮಸ್ಯೆಯಿಂದ / ಫಲಾನುಭವಿಗಳ ಬ್ಯಾಂಕ್ ಖಾತೆಗಳು ಚಾಲ್ತಿಯಲ್ಲಿ ಇಲ್ಲದ ಕಾರಣ / ಬ್ಯಾಂಕ್ ಖಾತೆಗಳಿಗೆ ಆಧಾರ್ ಸಂಖ್ಯೆ ಜೋಡಣೆ ಆಗದಿರುವ ಕಾರಣ ಪರಿಹಾರ ಧನವನ್ನು ವಿತರಿಸಲು ಸಾಧ್ಯವಾಗಿರುವುದಿಲ್ಲ. ಆದ್ದರಿಂದ, ಬಾಕಿ ಉಳಿದಿರುವ ಅರ್ಜಿದಾರರಿಗೆ ಪರಿಹಾರ ಧನವನ್ನು ವಿತರಿಸುವ ಸಂಬಂಧ ಹೆಚ್ಚುವರಿ ಬ್ಯಾಂಕ್ ಖಾತೆಯ ಮಾಹಿತಿಗಳನ್ನು ದಾಖಲಿಸುವುದು ಅವಶ್ಯಕವಾಗಿದ್ದು, "ಸೇವಾ ಸಿಂಧು" ವೆಬ್ ಪೋರ್ಟಲ್‌ನಲ್ಲಿ ಹೆಚ್ಚುವರಿ ಬ್ಯಾಂಕ್ ಖಾತೆಯ ಮಾಹಿತಿಗಳನ್ನು ದಾಖಲಿಸುವ ಮೂಲಕ ಪರಿಹಾರ ಧನ ವಿತರಿಸಲು ಸಹಕರಿಸಬೇಕಾಗಿ ಕೋರಿ ಪತ್ರಿಕಾ ಪ್ರಕಟಣೆಯನ್ನು ಸಾರಿಗೆ ಇಲಾಖಾ ವತಿಯಿಂದ ಪ್ರಮುಖ ಪತ್ರಿಕೆಗಳಲ್ಲಿ ನೀಡಲಾಗಿರುತ್ತದೆ ಹಾಗೂ ಎಲ್ಲಾ ಅರ್ಜಿದಾರರಿಗೆ ಅವರ ಮೊಬೈಲ್‌ಗಳಿಗೆ ಹೆಚ್ಚುವರಿ ಬ್ಯಾಂಕ್ ಖಾತೆಗಳನ್ನು ಸೇವಾ ಸಿಂಧು ಪೋರ್ಟಲ್‌ನಲ್ಲಿ ದಾಖಲಿಸುವಂತೆ ಕೋರಿ ಎರಡು ಬಾರಿ ಸೇವಾ ಸಿಂಧು ಮೂಲಕ ದಿನಾಂಕ: 25-11-2020ರ ಗಡುವನ್ನು ನಿಗದಿಪಡಿಸಿ ಎಸ್.ಎಂ.ಎಸ್., ಮುಖಾಂತರ ಸಂದೇಶಗಳನ್ನು ರವಾನಿಸಲಾಗಿರುತ್ತದೆ. ಅದಕ್ಕನುಗುಣವಾಗಿ ಸ್ವೀಕೃತವಾಗಿರುವ ಮಾಹಿತಿಯನ್ನು ಪರಿಶೀಲಿಸಿ ಪರಿಹಾರ ಧನ ವಿತರಿಸುವ ಕ್ರಮ ಚಾಲ್ತಿಯಲ್ಲಿರುತ್ತದೆ.
</td></tr>
<tr><td>ಆ</td><td>ಎಷ್ಟು ಫಲಾನುಭವಿಗಳಿಗೆ ತಲುಪಿದೆ? ಅದರ ಒಟ್ಟು ಮೊತ್ತವೆಷ್ಟು;</td></tr>
</table>

ಇ	ಸೌಲಭ್ಯ ಪಡೆಯಲು ಸರ್ಕಾರದ ನಿಬಂಧನೆಗಳೇನು?	ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಟಿಡಿ 121 ಟಿಡಿಒ 2020, ದಿನಾಂಕ: 29-05-2020ರಲ್ಲಿ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರಿಗೆ ಮಾತ್ರ ಒಮ್ಮೆ ಪರಿಹಾರವಾಗಿ ರೂ.5,000/- ಗಳ ಪರಿಹಾರ ಧನವನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ನೀಡಲು ಮಂಜೂರಾತಿ ನೀಡಿ ಆದೇಶಿಸಲಾಗಿದೆ. 1. ಎಲ್ಲಾ ಅರ್ಜಿಗಳು ಸೇವಾ ಸಿಂಧು ಪೋರ್ಟಲ್ ಮೂಲಕವೇ ಸ್ವೀಕೃತವಾಗತಕ್ಕದ್ದು. 2. ದಿನಾಂಕ: 24-03-2020 ರಂದು ಚಾಲನೆ ಪರವಾನಗಿ ಪ್ರಮಾಣ ಪತ್ರ (Driving License) ಹೊಂದಿರುವ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರಿಗೆ ಮಾತ್ರ ಅನ್ವಯಿಸತಕ್ಕದ್ದು. ದಿನಾಂಕ: 24-03-2020 ರಂದು ಚಾಲ್ತಿಯಲ್ಲಿದ್ದ ಚಾಲಕರ ಪರವಾನಗಿ (Driving License) ಸಂಖ್ಯೆಗಿಂತ ಹೆಚ್ಚು ಫಲಾನುಭವಿಗಳಿಲ್ಲದಂತೆ ಖಚಿತಪಡಿಸಿಕೊಳ್ಳತಕ್ಕದ್ದು. 3. ಆಧಾರ್ ಕಾರ್ಡ್ / ಚಾಲನಾ ಪರವಾನಗಿ / ವಾಹನ ನೋಂದಣಿ ಸಂಖ್ಯೆ ಮೂರು ಅಂಶಗಳು ಎಲ್ಲಾ ಫಲಾನುಭವಿಗಳಿಗೆ ಅನನ್ಯವಾಗಿರುವುದು ಕಡ್ಡಾಯವಾಗಿರತಕ್ಕದ್ದು. 4. ಆಟೋ ಮತ್ತು ಟ್ಯಾಕ್ಸಿ ಚಾಲಕರಿಗೆ ಮಾತ್ರ ಅನ್ವಯವಾಗತಕ್ಕದ್ದು. ಮ್ಯಾಕ್ಸಿ ಕ್ಯಾಬ್‌ಗಳಿಗೆ ಅನ್ವಯಿಸುವುದಿಲ್ಲ. 5. ಪರಿಹಾರ ಧನವು ಕೇವಲ ಚಾಲನೆ ಪರವಾನಗಿ ಪ್ರಮಾಣ ಪತ್ರವನ್ನು (Driving License) ಹೊಂದಿರುವ ಹಾಗೂ ಅಗತ್ಯವಿರುವ ಚಾಲಕರ ಬ್ಯಾಂಕ್ ಖಾತೆಗೆ DBT ಮುಖಾಂತರವೇ ಸಂದಾಯವಾಗಬೇಕು. 6. ಒಂದು ವೇಳೆ ಆಟೋ / ಟ್ಯಾಕ್ಸಿ ಮಾಲೀಕರಿಗೆ ಸಂದಾಯವಾದಲ್ಲಿ ಕೆಲವೊಂದು ಮಾಲೀಕರು ಹೆಚ್ಚಿನ ಸಂಖ್ಯೆಯ ಆಟೋ / ಟ್ಯಾಕ್ಸಿಗಳನ್ನು ಹೊಂದಿದ್ದು, ಅವರಿಗೆ ಪರಿಹಾರ ಧನ ಸಂದಾಯವಾದಲ್ಲಿ ಜೀವನ ನಿರ್ವಹಣೆಯನ್ನು ಎದುರಿಸುತ್ತಿರುವ ಚಾಲಕರಿಗೆ ಸಿಗದಂತೆಯಾಗುತ್ತದೆ. ಆದುದರಿಂದ Duplication or Double Payment ಆಗದಂತೆ, ಅವರುಗಳ ಆಧಾರ್ / ಪ್ಯಾನ್ ಕಾರ್ಡ್ ಬ್ಯಾಂಕ್ ಖಾತೆಗೆ ಅನನ್ಯವಾಗಿ ಲಿಂಕ್ ಆಗಿರುವ ಬಗ್ಗೆ ಗಮನಹರಿಸಿ ವರ್ಗಾಯಿಸತಕ್ಕದ್ದು. 7. ಈ ಹಂತದಲ್ಲಿ ಸರ್ಕಾರ ಮತ್ತು ಫಲಾನುಭವಿಗಳ ನೇರ ಸಂಪರ್ಕವಿರತಕ್ಕದ್ದು, ಯಾವುದೇ ಮಧ್ಯಂತರ ಸಂಪರ್ಕ ಇರಬಾರದು.

ಟಿಡಿ 06 ಟಿಡಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪಂರಾ 39 ಜಿಪಸ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:01-02-2021.

37
413
03/2/21

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

ಕಾರ್ಯದರ್ಶಿಗಳು,
ವಿಧಾನಸಭೆ, ವಿಧಾನಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ಕರ್ನಾಟಕ ವಿಧಾನ ಸಭೆಯ ಸದಸ್ಯರಾದ ಶ್ರೀ ಬಸವನಗೌಡ ದದ್ದಲ (ರಾಯಚೂರು ಗ್ರಾಮಾಂತರ)ರವರು ಕೇಳಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:749ಗೆ ಉತ್ತರ ಸಲ್ಲಿಸುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ಕರ್ನಾಟಕ ವಿಧಾನ ಸಭೆಯ ಸದಸ್ಯರಾದ ಶ್ರೀ ಬಸವನಗೌಡ ದದ್ದಲ(ರಾಯಚೂರು ಗ್ರಾಮಾಂತರ)ರವರು ಕೇಳಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:749ಗೆ ಉತ್ತರದ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ತಮಗೆ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ

B. Naveenkumar 01/02/21

(ಬಿ. ನವೀನ್ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

01.02.2021

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು,
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಅಧೀನ ಕಾರ್ಯದರ್ಶಿ(ಸಮನ್ವಯ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಕರ್ನಾಟಕ ವಿಧಾನಸಭೆ

15ನೇ ವಿಧಾನಸಭೆ

9ನೇ ಅಧಿವೇಶನ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	749
ವಿಧಾನ ಸಭಾ ಸದಸ್ಯರ ಹೆಸರು	:	ಶ್ರೀ ಬಸವನಗೌಡ ದದ್ದಲ (ರಾಯಚೂರು ಗ್ರಾಮಾಂತರ)
ಉತ್ತರಿಸುವ ದಿನಾಂಕ	:	03-02-2021
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರ
ಅ)	ಕಳೆದ ಮೂರು ವರ್ಷಗಳಿಂದ ರಾಯಚೂರು ಜಿಲ್ಲೆಯಲ್ಲಿ ಬಿ.ಆರ್.ಜಿ.ಎಫ್ ಯೋಜನೆಯಲ್ಲಿ ಉಳಿಕೆಯಾಗಿರುವ ಅನುದಾನ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು);	ರಾಯಚೂರು ಜಿಲ್ಲೆಯಲ್ಲಿ 2007-08ನೇ ಸಾಲಿನಿಂದ 2014-15ನೇ ಸಾಲಿನವರೆಗೆ ಬಿ.ಆರ್.ಜಿ.ಎಫ್ ಯೋಜನೆಯಡಿ ಬಳಕೆಯಾಗದೇ ಒಟ್ಟು ರೂ.2400.00ಲಕ್ಷಗಳ ಅನುದಾನ ಉಳಿಕೆಯಾಗಿರುತ್ತದೆ. ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ.

ಕ್ರ.ಸಂ	ತಾಲ್ಲೂಕು ಹೆಸರು	ಉಳಿಕೆಯಾದ ಅನುದಾನ (ರೂ. ಲಕ್ಷಗಳಲ್ಲಿ)
1.	ರಾಯಚೂರು	1216.75
2.	ಮಾನವಿ	371.01
3.	ದೇವದುರ್ಗ	249.18
4.	ಲಿಂಗಸುಗೂರು	336.55
5.	ಸಿಂಧನೂರು	226.51

ಕ್ರ.ಸಂ.	ಪ್ರಶ್ನೆಗಳು	ಉತ್ತರ
ಆ)	ಸದರಿ ಉಳಿಕೆ ಅನುದಾನವು ರಾಯಚೂರು ಜಿಲ್ಲೆಯ ಯಾವ ಯಾವ ವಿಧಾನಸಭಾ ಕ್ಷೇತ್ರಕ್ಕೆ ಮರು ಹಂಚಿಕೆ ಮಾಡಲಾಗಿದೆ;	ಸದರಿ ಉಳಿಕೆಯಾದ ಅನುದಾನವನ್ನು ಈ ಕೆಳಗಿನಂತೆ ವಿಧಾನಸಭಾ ಕ್ಷೇತ್ರವಾರು ಮರು ಹಂಚಿಕೆ ಮಾಡಲಾಗಿದೆ. (ರೂ. ಲಕ್ಷಗಳಲ್ಲಿ)

ರಾಯಚೂರು ವಿಧಾನಸಭಾ ಕ್ಷೇತ್ರ	800.00
ದೇವದುರ್ಗ ವಿಧಾನಸಭಾ ಕ್ಷೇತ್ರ	800.00
ಮಸ್ಕಿ ವಿಧಾನಸಭಾ ಕ್ಷೇತ್ರ	800.00

ಕ್ರ.ಸಂ.	ಪ್ರಶ್ನೆಗಳು	ಉತ್ತರ
ಇ)	ಯಾವ ಮಾನದಂಡದ ಆಧಾರದ ಮೇಲೆ ಸದರಿ ವಿಧಾನಸಭಾ ಕ್ಷೇತ್ರಕ್ಕೆ ಅನುದಾನವನ್ನು ಮರು ಹಂಚಿಕೆ	ಬಳಕೆಯಾಗದೇ ಉಳಿದಿರುವ ಬಿ.ಆರ್.ಜಿ.ಎಫ್ ಅನುದಾನ ರೂ.2400.00ಲಕ್ಷಗಳ ಮೊತ್ತವನ್ನು ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 285 ಜಿಪಸ 2020, ದಿನಾಂಕ:11-11-2020

	ಮಾಡಲಾಗಿರುತ್ತದೆ ಮತ್ತು ಬಿ.ಆರ್.ಜಿ.ಎಫ್ ಯೋಜನೆಯ ಉದ್ದೇಶವೇನು; ಯೋಜನೆಯ ಅನುದಾನ ಬಳಕೆಗೆ ಇರುವ ನಿಯಮದ ಆದೇಶದ ಪ್ರತಿಗಳೊಂದಿಗೆ ಸಂಪೂರ್ಣ ವಿವರ ನೀಡುವುದು?	ರನ್ವಯ ವಿಧಾನಸಭಾ ಕ್ಷೇತ್ರವಾರು ಮಾತ್ರ ಹಂಚಿಕೆ ಮಾಡಿ ಬಳಕೆ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ. ಹಿಂದುಳಿದ ಪ್ರದೇಶಗಳ ಅಭಿವೃದ್ಧಿ ಅನುದಾನ ನಿಧಿ (ಬಿ.ಆರ್.ಜಿ.ಎಫ್) ಯೋಜನೆಯು ಜನರ ಸಹಭಾಗಿತ್ವದಲ್ಲಿ ಅಭಿವೃದ್ಧಿ ಯೋಜನೆಗಳ ತಯಾರಿ ಮತ್ತು ಸಾಮರ್ಥ್ಯಾಭಿವೃದ್ಧಿ ಅನುಷ್ಠಾನಗೊಳಿಸುವ ಮತ್ತು ಪ್ರತಿ ಜಿಲ್ಲೆಯಲ್ಲಿಯೂ ಜಿಲ್ಲಾ ಯೋಜನೆಗಳನ್ನು ರೂಪಿಸಿದ ನಂತರ ಯೋಜನೆಗಳಲ್ಲಿ ಕಂಡುಬರುವ ಅಂತರಗಳನ್ನು ಕಡಿಮೆ ಮಾಡಲು ಹಾಗೂ ಹಿಂದುಳಿಯುವಿಕೆಯಿಂದ ಸದರಿ ಜಿಲ್ಲೆಗಳನ್ನು ಸಂಪೂರ್ಣವಾಗಿ ಮೇಲೆತ್ತುವ ಉದ್ದೇಶವನ್ನು ಹೊಂದಿರುತ್ತದೆ. ಯೋಜನೆಯ ಅನುದಾನದ ಬಳಕೆಗೆ ಸಂಬಂಧಿಸಿದಂತೆ ಸರ್ಕಾರದಿಂದ ದಿನಾಂಕ:18-04-2013ರ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ (ಲಗತ್ತಿಸಿದೆ).

ಸಂಖ್ಯೆ:ಗ್ರಾಅಪಂರಾ 39 ಜಿಪಸ 2021

(ಕೆ.ಎಸ್.ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಆಯುಕ್ತರವರ ಕಛೇರಿ, ಗ್ರಾ.ಕುನೀ.&.ನೈ.ಇ., 2ನೇ ಮಹಡಿ, "ಇ" ಬ್ಲಾಕ್, ಕೆಹೆಚ್‌ಬಿ ಕಟ್ಟಡ,
ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು–560009. ☎:080–22240508 📠:22240509
ಇ–ಮೇಲ್: krwssd@gmail.com

ಸಂ:ಗ್ರಾಕುನೀ&ನೈಇ/138/ಗ್ರಾನೀಸ(4)2020 ದಿನಾಂಕ:02.02.2021.

13
WS
3/2/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು–01.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ **ಶ್ರೀ ಅಜಯ್ ಧರ್ಮ ಸಿಂಗ್ ಡಾ॥ (ಜೇವರ್ಗಿ)** ಇವರ **ಚುಕ್ಕೆ** ರಹಿತ ಪ್ರಶ್ನೆ **ಸಂ:659ಕ್ಕೆ** ಸಂಬಂಧಿಸಿದ ಮೇಲಿನ ಕ್ರಮ/ವಾಸ್ತವಿಕ ವರದಿಯ ಉತ್ತರ ನೀಡುವ ಬಗ್ಗೆ.

******

ಮಾನ್ಯ ವಿಧಾನ ಸಭಾ ಸದಸ್ಯರಾದ **ಶ್ರೀ ಅಜಯ್ ಧರ್ಮ ಸಿಂಗ್ ಡಾ॥ (ಜೇವರ್ಗಿ)** ಇವರ **ಚುಕ್ಕೆ ರಹಿತ ಪ್ರಶ್ನೆ ಸಂ:659ಕ್ಕೆ** ಉತ್ತರದ **25** ಪ್ರತಿಗಳನ್ನು ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ತಮ್ಮ ವಿಶ್ವಾಸಿ,
2/2/2021
ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಪ್ರತಿಯನ್ನು:
1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರಿಗೆ

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ಅಜಯ್ ಧರ್ಮ ಸಿಂಗ್ ಡಾ॥ (ಜೇವರ್ಗಿ)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 659

ಉತ್ತರ ದಿನಾಂಕ : 03.02.2021

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಪ್ರಸ್ತುತ ಶುದ್ಧ ಕುಡಿಯುವ ನೀರಿನ ಎಷ್ಟು ಘಟಕಗಳು ಅಸ್ತಿತ್ವದಲ್ಲಿವೆ (ಜಿಲ್ಲಾವಾರು ಮಾಹಿತಿ ನೀಡುವುದು);	ರಾಜ್ಯದಲ್ಲಿ ಪ್ರಸ್ತುತ 18728 ಶುದ್ಧ ಕುಡಿಯುವ ನೀರಿನ ಘಟಕಗಳು ಅಸ್ತಿತ್ವದಲ್ಲಿದೆ. ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ-1ರಲ್ಲಿ** ಲಗತ್ತಿಸಿದೆ.
ಆ)	ಇವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಘಟಕಗಳ ಸಂಖ್ಯೆ ಎಷ್ಟು (ಮಾಹಿತಿ ಒದಗಿಸುವುದು);	ಒಟ್ಟು 17190 ಘಟಕಗಳು ಕಾರ್ಯನಿರ್ವಹಿಸುತ್ತಿದೆ. ಮಾಹಿತಿ **ಅನುಬಂಧ-1ರಲ್ಲಿ** ಲಗತ್ತಿಸಿದೆ.
ಇ)	ಸದರಿ ಘಟಕಗಳ ಅಳವಡಿಕೆಗೆ ವೆಚ್ಚ ಮಾಡಿರುವ ಮೊತ್ತವೆಷ್ಟು; ಅವುಗಳಲ್ಲಿ ಯಾವುದಾದರೂ ಘಟಕಗಳು ದುರಸ್ತಿಗೊಳಗಾದಲ್ಲಿ ಅದರ ದುರಸ್ತಿ ಕಾರ್ಯವನ್ನು ನಿರ್ವಹಿಸುವ ಹೊಣೆಯನ್ನು ಯಾರಿಗೆ ನೀಡಲಾಗಿದೆ (ಕಳೆದ ಮೂರು ವರ್ಷಗಳ ವಿವರ ನೀಡುವುದು);	ಘಟಕಗಳ ಅಳವಡಿಕೆಗೆ ತಗಲುವ ವೆಚ್ಚದ ವಿವರ **ಅನುಬಂಧ-2ರಲ್ಲಿ** ಲಗತ್ತಿಸಿದೆ. • ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆಯ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಟೆಂಡರ್ ಮುಖೇನ, ಕೆ.ಆರ್.ಐ.ಡಿ.ಎಲ್. ಸಂಸ್ಥೆ ಮುಖೇನ, ಸಹಕಾರ ಸಂಘ / ಸಂಸ್ಥೆ ಮುಖೇನ ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಇತರೆ ಅನುದಾನದಲ್ಲಿ ಅನುಷ್ಠಾನಗೊಳಿಸಿರುವ ಘಟಕಗಳ ಪೈಕಿ, ನಿರ್ವಹಣೆ ಅವಧಿ ಮುಗಿದಿರುವ / ನಿರ್ವಹಣೆ ಸಮಸ್ಯೆ ಇರುವ 9022 ಘಟಕಗಳನ್ನು ವಿವಿಧ ಪ್ಯಾಕೇಜ್‌ಗಳಾಗಿ ವಿಂಗಡಿಸಿ ಜಿಲ್ಲಾ ಮಟ್ಟದಲ್ಲಿ ನಿಯಮಾನುಸಾರ ಟೆಂಡರ್ ಕರೆಯಲಾಗಿದ್ದು, ಈಗಾಗಲೇ 7661 ನೀರು ಶುದ್ಧೀಕರಣ ಘಟಕಗಳಿಗೆ ಟೆಂಡರ್‌ನಂತೆ ಅನುಮೋದನೆಯಾದ ಸಂಸ್ಥೆ/ಗುತ್ತಿಗೆದಾರರಿಗೆ ಮುಂದಿನ 5 ವರ್ಷಗಳ ನಿರ್ವಹಣೆಗಾಗಿ ಹಸ್ತಾಂತರ ಮಾಡಲು ಕ್ರಮವಹಿಸಲಾಗಿದೆ. ಉಳಿದಂತೆ 1361 ಘಟಕಗಳನ್ನು ಗ್ರಾಮ ಪಂಚಾಯಿತಿಗಳಿಗೆ ನಿರ್ವಹಣೆಗಾಗಿ ಹಸ್ತಾಂತರಿಸಿದೆ. • ಗ್ರಾಮ ಪಂಚಾಯಿತಿಗಳಿಗೆ ನಿರ್ವಹಣೆಗಾಗಿ ವಹಿಸಲಾದ ಘಟಕಗಳನ್ನು ಸುಸ್ಥಿತಿಯಲ್ಲಿಡಲು ಮಾಹೆಯಾನ ಪ್ರತಿ ಘಟಕಕ್ಕೆ ಇಲಾಖೆಯಿಂದ ರೂ.3000.00ಗಳ ಅನುದಾನ ಒದಗಿಸಲಾಗುತ್ತಿದೆ ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಇತರೆ ಅನುದಾನಗಳನ್ನು ಬಳಸಿ ಘಟಕಗಳನ್ನು ಸುಸ್ಥಿತಿಯಲ್ಲಿಡಲು ಕಾಲಕಾಲಕ್ಕೆ ಸೂಚನೆಗಳನ್ನು ಸಹ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನೀಡಲಾಗುತ್ತಿದೆ. • ತಾತ್ಕಾಲಿಕವಾಗಿ ದುರಸ್ಥಿಯಲ್ಲಿರುವ ಎಲ್ಲಾ ಘಟಕಗಳನ್ನು ಗ್ರಾ.ಕು.ನೀ.&ನೈ ಇಲಾಖೆಯ ವತಿಯಿಂದ ಟಾಸ್ಕ್‌ಫೋರ್ಸ್ ಹಾಗೂ ಇತರೆ ಅನುದಾನ ಬಳಸಿಕೊಂಡು, ದುರಸ್ಥಿಗೊಳಿಸಿ ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲು ಕ್ರಮ ಜರುಗಿಸಲಾಗುತ್ತಿದೆ.
ಈ)	ದುರಸ್ತಿಗೊಳಗಾದ ಘಟಕಗಳನ್ನು ತಕ್ಷಣವೇ ಸರಿಪಡಿಸಲು ನಿರ್ದಿಷ್ಟ ಸೂಚನೆಯನ್ನು ನೀಡಲಾಗಿದೆಯೇ (ವಿವರ ನೀಡುವುದು)?	Defect Liability Period ಮುಗಿಯುವುದರೊಳಗೆ ಕಾರ್ಯನಿರ್ವಹಿಸದೇ ಇದ್ದಲ್ಲಿ, ಅಂತಹ ಘಟಕಗಳನ್ನು ಸ್ಥಾಪಿಸಿದ ಏಜೆನ್ಸಿರವರಿಗೆ ಕರಾರಿನಂತೆ ನೋಟೀಸ್‌ಗಳನ್ನು ನೀಡಿ Rescind ಮಾಡಲು ಕ್ರಮವಹಿಸಲಾಗುತ್ತಿದೆ ಹಾಗೂ ಸದರಿ ಘಟಕಗಳನ್ನು ನಿಯಮಾನುಸಾರ ಇಲಾಖಾ ವತಿಯಿಂದ ಸರಿಪಡಿಸಿ ಕಾರ್ಯನಿರ್ವಹಿಸುವಂತೆ ಕ್ರಮಜರುಗಿಸಲಾಗುತ್ತಿದೆ.

ಸಂ:ಗ್ರಾಕುನೀ&ನೈಇ 138 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ:- 659ರ ಅನುಬಂಧ

Annexure-1

Sl. No.	District \ Division	No. of Plants Commissioned	No. of Plants Working	No. of Plants Not Working
1	Bagalkot	780	707	73
2	Bangalore Rural	688	677	11
3	Bangalore Urban	714	660	54
4	Belagavi / Chikodi	1330	1239	91
5	Bellary	1129	1087	42
6	Bidar	291	189	102
7	Chamarajnagar	181	174	7
8	Chikkaballapur	734	714	20
9	Chikkamagalur	216	195	21
10	Chitradurga	1052	974	78
11	Dakshina Kannada	125	60	65
12	.Davangere	1343	1316	27
13	Dharwad	467	412	55
14	Gadag	439	421	18
15	Hassan	454	446	8
16	Haveri	750	716	34
17	Kalaburgi	442	300	142
18	Kodagu	36	26	10
19	Kolar	1077	1067	10
20	Koppal	666	523	143
21	Mandya	709	695	14
22	Mysore	606	548	58
23	Ramanagar	578	566	12
24	Raichur	616	560	56
25	Shimoga	255	251	4
26	.Tumkur	1508	1404	104
27	Udupi	59	56	3
28	Uttar Kannada	234	205	29
29	Vijayapura	834	647	187
30	Yadgir	415	355	60
Total		**18728**	**17190**	**1538**

ಅನುಬಂಧ - 2

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಕಾರ್ಯಕ್ರಮ (NRDWP) ಯೋಜನೆಯಡಿ ಶುದ್ಧ ಕುಡಿಯುವ ನೀರಿನ ಘಟಕಗಳಿಗಾಗಿ ವಿಭಾಗ/ಜಿಲ್ಲಾವಾರು ವೆಚ್ಚಮಾಡಲಾದ ಅನುದಾನದ ವಿವರ.

(ರೂ ಲಕ್ಷಗಳಲ್ಲಿ)

ಕ್ರ ಸಂ	ಜಿಲ್ಲೆ / ವಿಭಾಗ	ವೆಚ್ಚಮಾಡಲಾದ ಅನುದಾನದ ವಿವರ.				
		2017-18	2018-19	2019-20	2020-21 (ಡಿಸೆಂಬರ್ - 2020ರ ಅಂತ್ಯಕ್ಕೆ)	ಒಟ್ಟು
1	ಬಾಗಲಕೋಟೆ	1266.76	615.53	20.70	86.43	1989.42
2	ಬೆಂಗಳೂರು (ಗ್ರಾ)	947.53	759.65	118.00	0.00	1825.18
3	ಬೆಂಗಳೂರು(ನ)	517.78	1217.47	8.59	0.00	1743.84
4	ಬೆಳಗಾಂ	1216.52	1906.07	122.96	9.50	3255.05
5	ಚಿಕ್ಕೋಡಿ	473.41	1585.27	371.17	30.74	2460.59
6	ಬಳ್ಳಾರಿ	1082.16	418.55	244.08	26.17	1770.96
7	ಬೀದರ್	1593.44	2122.57	146.08	23.32	3885.41
8	ಬಿಜಾಪುರ	234.14	364.99	93.83	20.90	713.86
9	ಚಾಮರಾಜನಗರ	1743.17	667.93	542.92	67.73	3021.75
10	ಚಿಕ್ಕಬಳ್ಳಾಪುರ	366.23	539.67	293.61	20.71	1220.22
11	ಚಿಕ್ಕಮಗಳೂರು	2438.52	2061.46	274.50	289.23	5063.71
12	ಚಿತ್ರದುರ್ಗ	101.33	389.57	8.79	0.00	499.69
13	ದಕ್ಷಿಣಕನ್ನಡ	1653.44	1367.67	107.07	73.16	3201.34
14	ದಾವಣಗೆರೆ	669.46	1071.54	40.01	62.32	1843.33
15	ಧಾರವಾಡ	900.78	718.93	180.01	13.09	1812.81
16	ಗದಗ	669.74	396.47	53.33	0.00	1119.54
17	ಗುಲ್ಬರ್ಗಾ	222.83	2266.40	90.54	5.10	2584.87
18	ಹಾಸನ	1451.75	1381.68	338.35	32.88	3204.66
19	ಹಾವೇರಿ	44.85	20.58	0.14	0.00	65.57
20	ಕೊಡಗು	2800.37	1160.51	107.86	31.13	4099.87
21	ಕೋಲಾರ	956.23	800.89	277.31	634.08	2668.51
22	ಕೊಪ್ಪಳ	774.51	954.41	333.21	253.86	2315.99
23	ಮಂಡ್ಯ	1267.34	1460.01	398.40	18.01	3143.76
24	ಮೈಸೂರು	1222.35	811.11	288.75	0.00	2322.21
25	ರಾಯಚೂರು	1161.54	189.22	101.39	52.77	1504.92
26	ರಾಮನಗರ	636.70	49.93	460.52	93.02	1240.17
27	ಶಿವಮೊಗ್ಗ	2883.04	1951.92	344.51	55.25	5234.72
28	ತುಮಕೂರು	43.56	118.60	0.00	0.96	163.12
29	ಉಡುಪಿ	486.78	453.24	183.01	131.93	1254.96
30	ಉತ್ತರ ಕನ್ನಡ	682.79	322.34	48.57	0.00	1053.70
31	ಯಾದಗಿರಿ	682.79	322.34	48.57	0.00	1053.70
ಒಟ್ಟು		31209.04	28631.20	5850.37	2112.19	67337.43

ಮುಖ್ಯ ಇಂಜಿನಿಯರ್ ಅಧಿಕಾರಿಗಳು,
ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.

AHF/ 21 /AID /2021-AHF_SEC_b_AH_ Animal Husbandry Fisheries sec

ಕರ್ನಾಟಕ ಸರ್ಕಾರ

ಸಂಖ್ಯೆ:ಇ–ಪಸಂಮೀ 21 ಸಲೆವಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ:01.02.2021

05
WS
3/2/21

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ,

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ **ಆಚಾರ್ ಹಾಲಪ್ಪ ಬಸಪ್ಪ (ಯಲಬುರ್ಗ)** ಇವರು ಸದನದಲ್ಲಿ ಮಂಡಿಸಿರುವ ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ: 715 ಕ್ಕೆ ಉತ್ತರಿಸುವ ಬಗ್ಗೆ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಸಭೆಯ ಮಾನ್ಯ ವಿಧಾನ ಸಭೆಯ ಸದಸ್ಯರಾದ **ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಯಲಬುರ್ಗ)** ಇವರು ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 715 ಕ್ಕೆ ಕನ್ನಡ ಭಾಷೆಯಲ್ಲಿ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ

(ಬಿ.ಎನ್. ಪ್ರವೀಣ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
(ಪಶುಸಂಗೋಪನೆ)

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಯಲಬುರ್ಗ)

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 715

ಉತ್ತರಿಸಬೇಕಾದ ದಿನಾಂಕ : 03.02.2021.

ಉತ್ತರಿಸಬೇಕಾದ ಸಚಿವರು : ಮಾನ್ಯ ಪಶುಸಂಗೋಪನೆ ಸಚಿವರು.

ಕ್ರಸಂ	ಪ್ರಶ್ನೆಗಳು	ಉತ್ತರಗಳು
ಅ	2020-21ನೇ ಸಾಲಿನಲ್ಲಿ ಪಶುಭಾಗ್ಯ ಯೋಜನೆಯಡಿ ಫಲಾನುಭವಿಗಳ ಆಯ್ಕೆಗೆ ನೀಡಲಾದ ಗುರಿ ಎಷ್ಟು;	2020-21ನೇ ಸಾಲಿನಲ್ಲಿ ಪಶುಭಾಗ್ಯ ಯೋಜನೆಗೆ ಅನುದಾನ ನಿಗದಿಯಾಗಿರುವುದಿಲ್ಲ. ಆದ್ದರಿಂದ, ಫಲಾನುಭವಿಗಳ ಆಯ್ಕೆಗೆ ಯಾವುದೇ ಗುರಿ ನಿಗದಿಪಡಿಸಿರುವುದಿಲ್ಲ.
ಆ	ಕೋವಿಡ್-19 ನಂತಹ ಸಂಕಷ್ಟದ ಸಮಯದಲ್ಲಿ ರೈತ ಸಮುದಾಯಕ್ಕೆ ಆಸರೆಯಾಗಿದ್ದ ಮಹತ್ವಾಕಾಂಕ್ಷಿ ಯೋಜನೆಯನ್ನು 2020-21ನೇ ಸಾಲಿನಲ್ಲಿ ಕೈಬಿಟ್ಟಿರುವುದಕ್ಕೆ ಕಾರಣವೇನು;	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿಯಲ್ಲಿ 2020-21ನೇ ಸಾಲಿನಲ್ಲಿ ಮಹತ್ವಾಕಾಂಕ್ಷಿ ಯೋಜನೆಯನ್ನು ಕೈಬಿಟ್ಟಿರುವುದಿಲ್ಲ. ಈ ಯೋಜನೆಗೆ ರೂ:10.00 ಕೋಟಿಗಳ ಕ್ರಿಯಾ ಯೋಜನೆಯನ್ನು ಕೇಂದ್ರ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿರುತ್ತದೆ. ಸದರಿ ಯೋಜನೆಗೆ ಅನುಮೋದನೆ ನಿರೀಕ್ಷಿಸಲಾಗಿದೆ.
ಇ)	ಕಳೆದ ಎರಡು ವರ್ಷಗಳಲ್ಲಿ ಪಶುಭಾಗ್ಯ ಯೋಜನೆಯಲ್ಲಿ ಆಯ್ಕೆ ಮಾಡಿದ ಫಲಾನುಭವಿಗಳ ಸಂಖ್ಯೆ ಎಷ್ಟು; (ಯೋಜನಾವಾರು, ಜಿಲ್ಲಾವಾರು ವಿವರಗಳನ್ನು ನೀಡುವುದು)	2019-20 ಮತ್ತು 2020-21ನೇ ಸಾಲಿನಲ್ಲಿ ಪಶುಭಾಗ್ಯ ಯೋಜನೆಗೆ ಫಲಾನುಭವಿಗಳ ಆಯ್ಕೆಗೆ ಗುರಿ ನಿಗದಿಪಡಿಸಿರುವುದಿಲ್ಲ ಹಾಗೂ ಆಯ್ಕೆಯಾಗಿರುವುದಿಲ್ಲ.
ಈ)	ಮುಂದಿನ ಸಾಲಿನಲ್ಲಿ ಈ ಯೋಜನೆಯನ್ನು ಪ್ರಾರಂಭಿಸುವ ಯೋಜನೆ ಸರ್ಕಾರಕ್ಕಿದೆಯೇ; ಇಲ್ಲದಿದ್ದಲ್ಲಿ ಕಾರಣವೇನು;	ನಿಯಮಾನುಸಾರ ಪರಿಶೀಲಿಸಲಾಗುವುದು.

ಪಸಂಮೀ ಇ-21 ಸಲೆವಿ 2021

ಪ್ರಭು ಬಿ. ಚವ್ಹಾಣ್

ಪಶುಸಂಗೋಪನೆ ಸಚಿವರು,

AHF/ 31 /AID /2021-AHF_SEC_b_AH_ Animal Husbandry Fisheries sec

ಕರ್ನಾಟಕ ಸರ್ಕಾರ

ಸಂಖ್ಯೆ:ಇ-ಪಸಂಮೀ 31 ಸಲೆವಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ:01.02.2021

3/
U/S
3/2/21

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ,

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ **ಬಾಲಕೃಷ್ಣ ಸಿ.ಎನ್ (ಶ್ರವಣಬೆಳಗೊಳ)** ಇವರು ಸದನದಲ್ಲಿ ಮಂಡಿಸಿರುವ ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ: 677 ಕ್ಕೆ ಉತ್ತರಿಸುವ ಬಗ್ಗೆ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ **ಬಾಲಕೃಷ್ಣ ಸಿ.ಎನ್ (ಶ್ರವಣಬೆಳಗೊಳ)** ಇವರು ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 677 ಕ್ಕೆ ಕನ್ನಡ ಭಾಷೆಯಲ್ಲಿ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ

(ಬಿ.ಎನ್. ಪ್ರವೀಣ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
(ಪಶುಸಂಗೋಪನೆ)

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ಬಾಲಕೃಷ್ಣ ಸಿ.ಎನ್ (ಶ್ರವಣಬೆಳಗೊಳ)

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 677

ಉತ್ತರಿಸಬೇಕಾದ ದಿನಾಂಕ : 03.02.2021.

ಉತ್ತರಿಸಬೇಕಾದ ಸಚಿವರು : ಮಾನ್ಯ ಪಶುಸಂಗೋಪನೆ ಸಚಿವರು.

ಕ್ರ. ಸಂ	ಪ್ರಶ್ನೆಗಳು	ಉತ್ತರಗಳು
ಅ	ಪ್ರತಿ ತಾಲ್ಲೂಕಿಗೆ ಎರಡು ಗೋಶಾಲೆ ಮಾಡುವುದಾಗಿ ಘೋಷಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಈ ಕುರಿತು ಸರ್ಕಾರ ಚಿಂತನೆ ನಡೆಸುತ್ತಿದೆ.
ಆ	ಪಶುವೈದ್ಯಕೀಯ ಆಸ್ಪತ್ರೆಗಳಲ್ಲಿ ಡಾಕ್ಟರ್‌ಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಹೌದು, ಬಂದಿದೆ. ರೈತರ ತುರ್ತು ಸೇವೆಗಳಿಗಾಗಿ ಅಧಿಕ ಪ್ರಭಾರ ವ್ಯವಸ್ಥೆಯನ್ನು ಮಾಡಲಾಗಿದೆ.
ಇ)	ಹಿಂದೆ ರೈತರು ಸಾಕಿದ ಹಸು ಸಾವನ್ನಪ್ಪಿದರೆ ವಿಮೆ ಇಲ್ಲದೆ ಇದ್ದರೆ ಹತ್ತು ಸಾವಿರ ಪರಿಹಾರವನ್ನು ನೀಡುತ್ತಿದ್ದು, ಸರ್ಕಾರದ ಗಮನದಲ್ಲಿದೆಯೇ: ಸದರಿ ವಿಮೆ ಪರಿಹಾರವನ್ನು ನಿಲ್ಲಿಸಿರಲು ಕಾರಣಗಳೇನು:	ಸರ್ಕಾರದ ಆದೇಶ ಸಂಖ್ಯೆ: ಪಸಂಮೀ: 81 ಪಪಾಯೋ: 2017, ದಿನಾಂಕ:05-08-2017 ರಂತೆ, ವಿಮೆಗೊಳಪಡದ ಎತ್ತು ಮತ್ತು ಹಸುಗಳು ಆಕಸ್ಮಿಕವಾಗಿ ಮೃತಪಟ್ಟ ಸಂದರ್ಭದಲ್ಲಿ ಮಾರುಕಟ್ಟೆ ಮೌಲ್ಯದನುಸಾರ ಗರಿಷ್ಠ ರೂ.10000/- ಮಿತಿಯೊಳಗೆ ಪರಿಹಾರಧನ ನೀಡುವ ಅವಕಾಶವಿದ್ದು, ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ: ಪಸಂಮೀ: 81: ಪಪಾಯೋ: 2017, ದಿನಾಂಕ: 28-10-2017 ರಂತೆ, ವಿಮೆಗೊಳಪಡದ ಎತ್ತು/ಹಸು/ಹೋರಿ/ಕೋಣ/ಎಮ್ಮೆ/ಕಡಸು/ಮಣಕಗಳು (ಆರು ತಿಂಗಳು ಮೇಲ್ಪಟ್ಟು), ಆಕಸ್ಮಿಕವಾಗಿ ಮೃತಪಟ್ಟ ಸಂದರ್ಭದಲ್ಲಿ ಮಾರುಕಟ್ಟೆ ಮೌಲ್ಯದನುಸಾರ ಗರಿಷ್ಠ ರೂ.10000/- ಮಿತಿಯೊಳಗೆ ಪರಿಹಾರಧನ ನೀಡುವ ಸೌಲಭ್ಯವನ್ನು 2017-18ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾಗಿದ್ದು, ಸದರಿ ಕಾರ್ಯಕ್ರಮವನ್ನು 2018-19 ಹಾಗೂ 2019-20ನೇ ಸಾಲಿನಲ್ಲೂ ಅನುಷ್ಠಾನಗೊಳಿಸಲಾಗಿದೆ. ಆದರೆ, 2019-20 ನೇ ಸಾಲಿನಲ್ಲಿ ಸಾಮಾನ್ಯ ವರ್ಗದ ರೈತರ ಜಾನುವಾರುಗಳ ಮೃತಪಟ್ಟ ಸಂದರ್ಭದಲ್ಲಿ ಪರಿಹಾರಕ್ಕಾಗಿ ಅನುದಾನ ನಿಗದಿಯಾಗದಿರುವುದರಿಂದ ಬಿಡುಗಡೆಯಾಗಿರಲಿಲ್ಲ. ಈ ಯೋಜನೆಯನ್ನು

		ಅನುಷ್ಠಾನಗೊಳಿಸಿರುವುದಿಲ್ಲ.
ಈ	ಅದೇ ರೀತಿ ಹಿಂದೆ ರೈತ ಸಾಕಿದ ಕುರಿ ಸಾವನ್ನಪ್ಪಿದರೆ ವಿಮೆ ಇಲ್ಲದೆ ಇದ್ದರೆ ಐದು ಸಾವಿರ ಪರಿಹಾರವನ್ನು ನೀಡುತ್ತಿದ್ದಿದ್ದು ಸರ್ಕಾರದ ಗಮನದಲ್ಲಿದೆಯೇ: ಸದರಿ ವಿಮೆ ಪರಿಹಾರವನ್ನು ನಿಲ್ಲಿಸಿರಲು ಕಾರಣಗಳೇನು:	ಈ ಹಿಂದೆ ವಿಮೆ ಇಲ್ಲದೆ ಮರಣಿಸಿದ ಕುರಿ / ಮೇಕೆಗಳಿಗೆ ರಾಜ್ಯ ಸರ್ಕಾರದಿಂದ 6 ತಿಂಗಳ ಒಳಗಿನ ಕುರಿ / ಮೇಕೆ ಮರಿಗಳಿಗೆ ತಲಾ ರೂ.2,500/- ಗಳು ಮತ್ತು 6 ತಿಂಗಳ ಮೇಲ್ಪಟ್ಟ ಕುರಿ / ಮೇಕೆಗಳಿಗೆ ತಲಾ ರೂ.5000/- ಗಳನ್ನು ಕುರಿ / ಮೇಕೆ ಸಾಕಾಣಿಕೆದಾರರಿಗೆ ಪರಿಹಾರ ರೂಪದಲ್ಲಿ ಅನುಗ್ರಹ ಕೊಡುಗೆ ಯೋಜನೆಯಡಿ ನೀಡಲಾಗುತ್ತಿತ್ತು. 2020-21 ನೇ ಸಾಲಿನಲ್ಲಿ ಸರ್ಕಾರದಿಂದ ಅನುದಾನ ನಿಗದಿಯಾಗದೆ ಇರುವುದರಿಂದ ಯೋಜನೆಯನ್ನು ಪ್ರಸ್ತುತ ಅನುಷ್ಠಾನಗೊಳಿಸಿರುವುದಿಲ್ಲ.
ಉ	ಸರ್ಕಾರದ ವತಿಯಿಂದ ಪಶು ಮತ್ತು ಕುರಿಗಳಿಗೆ ವಿಮೆ ಮಾಡಲು ತೊಂದರೆಗಳೇನು?	ಕೇಂದ್ರ ಪುರಸ್ಕೃತ ರಾಷ್ಟ್ರೀಯ ಜಾನುವಾರು ಮಿಷನ್ ಯೋಜನೆಯಡಿ ಜಾನುವಾರು ವಿಮೆಗೆ ಅವಕಾಶವನ್ನು ಕಲ್ಪಿಸಲಾಗಿದ್ದು, ಆಸಕ್ತಿಯುಳ್ಳ ಪ್ರತಿಯೊಬ್ಬ ರೈತರು ಗರಿಷ್ಠ 5 ಹಾಲು ಹಿಂಡುವ ಹಸು/ಎಮ್ಮೆಗಳನ್ನು ವಿಮೆಗೊಳಪಡಿಸಲು ಎಪಿಎಲ್ ಕುಟುಂಬದವರಿಗೆ ಶೇಕಡ 50 ಹಾಗೂ ಬಿಪಿಎಲ್ ಕುಟುಂಬ ಮತ್ತು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರಿಗೆ ಶೇಕಡ 70 ವಿಮಾ ವಂತಿಗೆ ಸಹಾಯಧನವನ್ನು ನೀಡಲಾಗುತ್ತಿದೆ. ಅನುದಾನ ಲಭ್ಯತೆ ಅನುಸರಿಸಿ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಕುರಿಗಳಿಗೆ ವಿಮೆ ಮಾಡುವ ಯೋಜನೆ ಚಾಲ್ತಿಯಲ್ಲಿರುವುದಿಲ್ಲ.

ಪಸಂಮೀ ಇ-31 ಸಲೆವಿ 2021

ಪ್ರಭು ಬಿ. ಚವ್ಹಾಣ್
ಪಶುಸಂಗೋಪನೆ ಸಚಿವರು,

ಕರ್ನಾಟಕ ಸರ್ಕಾರ

ಸಂ: ಮಮಇ 37 ಎಸ್‌ಜೆಡಿ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:03.02.2021

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ ಸಚಿವಾಲಯ,
ವಿಧಾನಸೌಧ,
ಬೆಂಗಳೂರು

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭೆ ಸದಸ್ಯರು ಶ್ರೀ **ಸಂಜೀವ ಮ್ಮಠಂದೂರು (ಪತ್ತೂರು)**ಇವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:732ಕ್ಕೆ ಉತ್ತರಿಸುವ ಕುರಿತು

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆ ಸದಸ್ಯರು ಶ್ರೀ **ಸಂಜೀವ ಮ್ಮಠಂದೂರು (ಪತ್ತೂರು)** ಇವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:732ಕ್ಕೆ ಉತ್ತರವನ್ನು 25 ಪ್ರತಿಗಳಲ್ಲಿ ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಸರೋಜಮ್ಮ ಜಿ ಹೆಚ್)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 732
ಸದಸ್ಯರ ಹೆಸರು	: ಶ್ರೀ ಸಂಜೀವ ಮಠಂದೂರು (ಪುತ್ತೂರು)
ಉತ್ತರಿಸುವ ದಿನಾಂಕ	: 03.02.2021
ಉತ್ತರಿಸುವವರು	: ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರ ಇಲಾಖಾ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಸ್ವಂತ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಡಿಪಿಓ ಕಛೇರಿಗಳು ಎಷ್ಟು; (ಜಿಲ್ಲಾವಾರು ವಿವರ ಒದಗಿಸುವುದು)	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಸ್ವಂತ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಡಿಪಿಓ ಕಛೇರಿಗಳು – 77 ವಿವರವನ್ನು ಅನುಬಂಧ-1 ರಲ್ಲಿ ಒದಗಿಸಿದೆ.
ಆ)	ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಡಿಪಿಓ ಕಛೇರಿಗಳಿಗೆ ಯಾವಾಗ ಸ್ವಂತ ಕಟ್ಟಡ ನಿರ್ಮಿಸಲಾಗುವುದು;	ಸಿ.ಡಿ.ಪಿ.ಓ. ಕಛೇರಿ ನಿರ್ಮಿಸಲು ಇಲಾಖೆಯಲ್ಲಿ ಪ್ರತ್ಯೇಕ ಯೋಜನೆ / ಲೆಕ್ಕ ಶೀರ್ಷಿಕೆ ಇರುವುದಿಲ್ಲ.
ಇ)	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಎಷ್ಟು ಹುದ್ದೆಗಳು ಖಾಲಿ ಇರುತ್ತವೆ; (ಜಿಲ್ಲಾವಾರು ವಿವರ ಒದಗಿಸುವುದು)	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ 2442 ಹುದ್ದೆಗಳು ಖಾಲಿ ಇರುತ್ತವೆ. ವಿವರವನ್ನು ಅನುಬಂಧ-2ರಲ್ಲಿ ಒದಗಿಸಿದೆ.
ಈ)	ಈ ಖಾಲಿ ಹುದ್ದೆಗಳನ್ನು ಯಾವಾಗ ನೇಮಕಾತಿ ಮಾಡಿ ಭರ್ತಿ ಮಾಡಿಕೊಳ್ಳಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು).	ಪ್ರಸ್ತುತ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೆಳಕಾಣಿಸಿರುವ ಕ್ರಮ ವಹಿಸಲಾಗುತ್ತಿದೆ:- 1) ಜಂಟಿ ನಿರ್ದೇಶಕರು ಮತ್ತು ಉಪ ನಿರ್ದೇಶಕರ ಹುದ್ದೆಗಳನ್ನು ಮುಂಬಡ್ತಿ ಯಿಂದ ಭರ್ತಿ ಮಾಡಲು ವೃಂದ ಮತ್ತು ನೇಮಕಾತಿ ನಿಯಮಾವಳಿಗಳಿಗೆ ತಿದ್ದುಪಡಿ ಮಾಡಲಾಗುತ್ತಿದೆ. 2) ದ್ವಿತೀಯ ದರ್ಜೆ ಸಹಾಯಕರು-60 ಹುದ್ದೆಗಳು, ಪ್ರಥಮ ದರ್ಜೆ ಸಹಾಯಕರು – 50 ಹುದ್ದೆಗಳು, ಗೃಹಪಾಲಕ- 45 ಹುದ್ದೆಗಳು ಮತ್ತು ಮುಖ್ಯೋಪಾಧ್ಯಾಯರು-26 ಹುದ್ದೆಗಳ ಭರ್ತಿಗಾಗಿ ಆಯ್ಕೆ ಪಟ್ಟಿಯನ್ನು ಸಲ್ಲಿಸುವಂತೆ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. 3) ದ್ವಿತೀಯ ದರ್ಜೆ ಸಹಾಯಕರ ಹುದ್ದೆಯಿಂದ ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ 72 ಸಿಬ್ಬಂದಿಯವರಿಗೆ ಮುಂಬಡ್ತಿ ನೀಡುವ ಕ್ರಮ ಅಂತಿಮ ಹಂತದಲ್ಲಿರುತ್ತದೆ. 4) ಮೇಲ್ವಿಚಾರಕಿ ವೃಂದದ 70 ಹುದ್ದೆಗಳಿಗೆ ಹೆಚ್ಚುವರಿ ಅಭ್ಯರ್ಥಿಗಳ ಆಯ್ಕೆಪಟ್ಟಿ ಕೋರಿ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗುತ್ತಿದೆ. 5) ಅನುಕಂಪದ ಆಧಾರದ ಮೇಲೆ ನೇಮಕಾತಿ ಕೋರುವ ಪ್ರಸ್ತಾವನೆಗಳಿಗೆ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ವೃಂದಗಳಿಗೆ ಭರ್ತಿ ಮಾಡಲಾಗುತ್ತಿದೆ.

ಸಂ. ಮಮಇ 37 ಎಸ್‌ಜೆಡಿ 2021

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖಾ ಸಚಿವರು.

ಕರ್ನಾಟಕ ಸರ್ಕಾರ
ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ)
ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ
2ನೇ ಮಹಡಿ, ಕೆ.ಹೆಚ್.ಬಿ ಕಾಂಪ್ಲೆಕ್ಸ್, ಕಾವೇರಿ ಭವನ, ಬೆಂಗಳೂರು–560 009
ಟೆಲಿಫ್ಯಾಕ್ಸ್: 080–22221862 ಇ–ಮೇಲ್: wsrdpr@gmail.com,

ಸಂಖ್ಯೆ: RDWSD/13/SBM-G/LAQ/2021

ದಿನಾಂಕ 03.02.2021

ರವರಿಗೆ,
ಕಾರ್ಯದರ್ಶಿಗಳು
ಕರ್ನಾಟಕ ವಿಧಾನಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನಸಭೆಯ ಸದಸ್ಯರಾದ ಡಾ॥ ಯತೀಂದ್ರ ಸಿದ್ಧರಾಮಯ್ಯ (ವರುಣ) ಇವರು ಕೇಳಿರುವ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ – 380ಕ್ಕೆ ಉತ್ತರವನ್ನು ಸಲ್ಲಿಸುವ ಕುರಿತು.

ಉಲ್ಲೇಖ: ಪತ್ರ ಸಂಖ್ಯೆ: ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.380 ದಿನಾಂಕ 25.01.2021.

****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಮಾನ್ಯ ವಿಧಾನಸಭೆಯ ಸದಸ್ಯರಾದ ಡಾ॥ ಯತೀಂದ್ರ ಸಿದ್ಧರಾಮಯ್ಯ (ವರುಣ) ಇವರು ಕೇಳಿರುವ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ – 380ಕ್ಕೆ ಸ್ವಚ್ಛ ಭಾರತ್ ಮಿಷನ್ ಯೋಜನೆಗೆ ಸಂಬಂಧಿಸಿದಂತೆ ಉತ್ತರವನ್ನು ಸಿದ್ಧಪಡಿಸಿ 25 ಪ್ರತಿಗಳನ್ನು ತಮ್ಮ ಅವಗಾಹನೆಗೆ ಸಲ್ಲಿಸಲಾಗಿದೆ.

ತಮ್ಮ ವಿಶ್ವಾಸಿ

ಉಪ ನಿರ್ದೇಶಕರು
ಸ್ವಚ್ಛ ಭಾರತ್ ಮಿಷನ್ (ಗ್ರಾ)
ಗ್ರಾ.ಕು.ನೀ & ನೈರ್ಮಲ್ಯ ಇಲಾಖೆ

ಉತ್ತರದ ಪ್ರತಿಯನ್ನು ಈ ಕೆಳಕಂಡವರಿಗೆ ಕಳುಹಿಸಲಾಗಿದೆ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು ಇವರ ಮಾಹಿತಿಗಾಗಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ.ಪಂ.ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
3. ಸರ್ಕಾರದ ಅಧೀನ ಕಾರ್ಯದರ್ಶಿ (ಸಮನ್ವಯ) ಗ್ರಾ.ಅ.ಪಂ.ರಾಜ್ ಇಲಾಖೆ, ಬೆಂಗಳೂರು.
4. ಕಚೇರಿ ಪ್ರತಿ.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 380

ಸದಸ್ಯರ ಹೆಸರು : **ಡಾ|| ಯತೀಂದ್ರ ಸಿದ್ಧರಾಮಯ್ಯ (ವರುಣ)**

ಉತ್ತರಿಸುವ ದಿನಾಂಕ : 03.02.2021

ಉತ್ತರಿಸುವವರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದ ಗ್ರಾಮೀಣ ಭಾಗದಲ್ಲಿ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಕೈಗೊಂಡಿರುವ ಕ್ರಮಗಳೇನು; ಇದಕ್ಕೆ ವೆಚ್ಚ ಮಾಡಿರುವ ಅನುದಾನವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)</td><td>ಮೈಸೂರು ಜಿಲ್ಲೆಯ ಇಳವಾಲ ಹಾಗೂ ಸುತ್ತೂರು ಗ್ರಾಮ ಪಂಚಾಯಿತಿಗಳಲ್ಲಿ ಅತಿ ಹೆಚ್ಚು ಜನಸಂಖ್ಯೆ ಇದ್ದ ಕಾರಣ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಜಿಲ್ಲೆಯಿಂದ ಪ್ರಸ್ತಾವನೆ ಸಲ್ಲಿಸಲಾಗಿದ್ದು, ರಾಜ್ಯ ಘಟಕದ ಅನುದಾನದಲ್ಲಿ ವಿಶೇಷ ಪ್ರಕರಣ ಎಂದು ಪರಿಗಣಿಸಿ ಅನುಷ್ಠಾನ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.
ತಾಲ್ಲೂಕುವಾರು ವಿವರವನ್ನು ಕೆಳಕಂಡ ಕೋಷ್ಟಕದಲ್ಲಿ ನೀಡಲಾಗಿದೆ.
(ರೂ.ಲಕ್ಷಗಳಲ್ಲಿ)
<table>
<tr><th>ತಾಲ್ಲೂಕು</th><th>ಗ್ರಾ.ಪಂ</th><th>ಒಟ್ಟು ಮಂಜೂರಾತಿ</th><th>ಬಿಡುಗಡೆ</th><th>ವೆಚ್ಚ</th></tr>
<tr><td>ಮೈಸೂರು</td><td>ಇಲವಾಲ</td><td>2300.00</td><td>766.00</td><td>532.14</td></tr>
<tr><td rowspan="2">ನಂಜನಗೂಡು</td><td>ಸುತ್ತೂರು ಫೇಸ್-1</td><td>498.00</td><td>498.00</td><td>466.94</td></tr>
<tr><td>ಸುತ್ತೂರು ಫೇಸ್-2</td><td>626.00</td><td>313.00</td><td>-</td></tr>
</table></td></tr>
<tr><td>(ಆ)</td><td>ಈವರೆಗೆ ಎಷ್ಟು ತಾಲ್ಲೂಕು ಮತ್ತು ಗ್ರಾಮಗಳಲ್ಲಿ ಒಳಚರಂಡಿ ವ್ಯವಸ್ಥೆ ಮಾಡಲಾಗಿದೆ? (ವಿವರ ನೀಡುವುದು)</td><td>ಒಳಚರಂಡಿ ವ್ಯವಸ್ಥೆ ಕಲ್ಪಿಸಿರುವ ಗ್ರಾಮ ಪಂಚಾಯಿತಿಗಳ ವಿವರ.
<table>
<tr><th>ತಾಲ್ಲೂಕು</th><th>ಗ್ರಾ.ಪಂ</th></tr>
<tr><td>ಮೈಸೂರು</td><td>ಇಲವಾಲ</td></tr>
<tr><td rowspan="2">ನಂಜನಗೂಡು</td><td>ಸುತ್ತೂರು ಫೇಸ್-1</td></tr>
<tr><td>ಸುತ್ತೂರು ಫೇಸ್-2</td></tr>
</table></td></tr>
</table>

(ಕೆ.ಎಸ್ ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 380

ಸದಸ್ಯರ ಹೆಸರು : **ಡಾ|| ಯತೀಂದ್ರ ಸಿದ್ದರಾಮಯ್ಯ (ವರುಣ)**

ಉತ್ತರಿಸುವ ದಿನಾಂಕ : 03.02.2021

ಉತ್ತರಿಸುವವರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದ ಗ್ರಾಮೀಣ ಭಾಗದಲ್ಲಿ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಕೈಗೊಂಡಿರುವ ಕ್ರಮಗಳೇನು; ಇದಕ್ಕೆ ವೆಚ್ಚ ಮಾಡಿರುವ ಅನುದಾನವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)</td><td>ಮೈಸೂರು ಜಿಲ್ಲೆಯ ಇಳವಾಲ ಹಾಗೂ ಸುತ್ತೂರು ಗ್ರಾಮ ಪಂಚಾಯಿತಿಗಳಲ್ಲಿ ಅತಿ ಹೆಚ್ಚು ಜನಸಂಖ್ಯೆ ಇದ್ದ ಕಾರಣ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಜಿಲ್ಲೆಯಿಂದ ಪ್ರಸ್ತಾವನೆ ಸಲ್ಲಿಸಲಾಗಿದ್ದು, ರಾಜ್ಯ ಘಟಕದ ಅನುದಾನದಲ್ಲಿ ವಿಶೇಷ ಪ್ರಕರಣ ಎಂದು ಪರಿಗಣಿಸಿ ಅನುಷ್ಠಾನ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.
ತಾಲ್ಲೂಕುವಾರು ವಿವರವನ್ನು ಕೆಳಕಂಡ ಕೋಷ್ಟಕದಲ್ಲಿ ನೀಡಲಾಗಿದೆ.
(ರೂ.ಲಕ್ಷಗಳಲ್ಲಿ)
<table>
<tr><th>ತಾಲ್ಲೂಕು</th><th>ಗ್ರಾ.ಪಂ</th><th>ಒಟ್ಟು ಮಂಜೂರಾತಿ</th><th>ಬಿಡುಗಡೆ</th><th>ವೆಚ್ಚ</th></tr>
<tr><td>ಮೈಸೂರು</td><td>ಇಲವಾಲ</td><td>2300.00</td><td>766.00</td><td>532.14</td></tr>
<tr><td rowspan="2">ನಂಜನಗೂಡು</td><td>ಸುತ್ತೂರು ಫೇಸ್-1</td><td>498.00</td><td>498.00</td><td>466.94</td></tr>
<tr><td>ಸುತ್ತೂರು ಫೇಸ್-2</td><td>626.00</td><td>313.00</td><td>-</td></tr>
</table></td></tr>
<tr><td>(ಆ)</td><td>ಈವರೆಗೆ ಎಷ್ಟು ತಾಲ್ಲೂಕು ಮತ್ತು ಗ್ರಾಮಗಳಲ್ಲಿ ಒಳಚರಂಡಿ ವ್ಯವಸ್ಥೆ ಮಾಡಲಾಗಿದೆ? (ವಿವರ ನೀಡುವುದು)</td><td>ಒಳಚರಂಡಿ ವ್ಯವಸ್ಥೆ ಕಲ್ಪಿಸಿರುವ ಗ್ರಾಮ ಪಂಚಾಯಿತಿಗಳ ವಿವರ.
<table>
<tr><th>ತಾಲ್ಲೂಕು</th><th>ಗ್ರಾ.ಪಂ</th></tr>
<tr><td>ಮೈಸೂರು</td><td>ಇಲವಾಲ</td></tr>
<tr><td rowspan="2">ನಂಜನಗೂಡು</td><td>ಸುತ್ತೂರು ಫೇಸ್-1</td></tr>
<tr><td>ಸುತ್ತೂರು ಫೇಸ್-2</td></tr>
</table></td></tr>
</table>

(ಕೆ.ಎಸ್ ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂ:ಮಮಇ/13/ಮಅನಿ/2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:03.02.2021

58
u/s
3/2/21

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ / ಪರಿಷತ್ ಸಚಿವಾಲಯ,
ವಿಧಾನಸೌಧ,
ಬೆಂಗಳೂರು

ಮಾನ್ಯರೆ,

ವಿಷಯ: ಶ್ರೀ/ಶ್ರೀಮತಿ. ಹ್ಯಾರಿಸ್ ಎನ್.ಎ (ಶಾಂತಿನಗರ) ಮಾನ್ಯ ವಿಧಾನ ಸಭಾ /ವಿಧಾನ ಪರಿಷತ್ ಸದಸ್ಯರು ಇವರು ಮಂಡಿಸಿರುವ ಚುಕ್ಕೆ ಗುರುತಿನ / ಗುರುತಿಲ್ಲದ ಪ್ರಶ್ನೆ ಸಂಖ್ಯೆ:-586-ಕ್ಕೆ ಉತ್ತರಿಸುವ ಕುರಿತು

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ/ಶ್ರೀಮತಿ. ಹ್ಯಾರಿಸ್ ಎನ್.ಎ (ಶಾಂತಿನಗರ) ಮಾನ್ಯ ವಿಧಾನ ಸಭಾ /ವಿಧಾನ ಪರಿಷತ್ ಸದಸ್ಯರು ಇವರು ಮಂಡಿಸಿರುವ ಚುಕ್ಕೆ ಗುರುತಿನ / ಗುರುತಿಲ್ಲದ ಪ್ರಶ್ನೆ ಸಂಖ್ಯೆ:-586-ಕ್ಕೆ ಉತ್ತರವನ್ನು --25----ಪ್ರತಿಗಳಲ್ಲಿ ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ವಿ.ಭಾಗ್ಯಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-3
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 586
ಮಾನ್ಯ ಸದಸ್ಯರ ಹೆಸರು	: ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ)
ಉತ್ತರಿಸುವವರು	: ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖಾ ಸಚಿವರು
ಉತ್ತರಿಸಬೇಕಾದ ದಿನಾಂಕ	: 03-02-2021.

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ರಾಜ್ಯದಲ್ಲಿನ ಮಹಿಳಾ ಉದ್ಯಮಿಗಳಿಗೆ ಹಾಗೂ ಸ್ವಯಂ ಉದ್ಯೋಗ ಸೌಲಭ್ಯಗಳು ಹಾಗೂ ಆರ್ಥಿಕ ನೆರವಿನ ಯೋಜನೆಗಳಾವುವು; (ವಿವರ ನೀಡುವುದು)	ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮವು ಆರ್ಥಿಕವಾಗಿ ಹಿಂದುಳಿದ ಮಹಿಳೆಯರಿಗೆ ಸ್ವ ಉದ್ಯೋಗ ಪ್ರಾರಂಭಿಸಲು ಹಾಗೂ ಆರ್ಥಿಕ ಸೌಲಭ್ಯಕ್ಕಾಗಿ ಈ ಕೆಳಕಂಡ ಯೋಜನೆಗಳನ್ನು ಕರ್ನಾಟಕ ರಾಜ್ಯಾದಂತ ಅನುಷ್ಠಾನಗೊಳಿಸಲಾಗುತ್ತಿದೆ. 1. ಉದ್ಯೋಗಿನಿ ಯೋಜನೆ 2. ಕಿರುಸಾಲ ಯೋಜನೆ 3. ಚೇತನ ಯೋಜನೆ 4. ಧನಶ್ರೀ ಯೋಜನೆ 5. ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ 6. ಮಹಿಳಾ ತರಬೇತಿ ಯೋಜನೆ 7. ಬಡ್ಡಿ ಸಹಾಯಧನ ಯೋಜನೆ (ಕೆ.ಎಸ್.ಎಫ್.ಸಿ ಮೂಲಕ) 8. ದೇವದಾಸಿ ಪುನರ್ವಸತಿ ಯೋಜನೆ 9. ಮಾಜಿ ದೇವದಾಸಿಯರ ಮಾಸಾಶನ ಯೋಜನೆ (ವಿವರವನ್ನು ಅನುಬಂಧ-1ರಲ್ಲಿ ಲಗತ್ತಿಸಿದೆ).
ಆ	ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನವೋದ್ಯಮ ವಲಯವೂ ಸೇರಿದಂತೆ ಉದ್ಯಮ ವಲಯದಲ್ಲಿ ಮಹಿಳಾ ಉದ್ಯಮಿಗಳ ಪ್ರಮಾಣ ಎಷ್ಟು; ನವೋದ್ಯಮ ಸ್ಥಾಪನೆಗಾಗಿ ಇಲಾಖೆಯವರ ಮಾರ್ಗದರ್ಶನ ಮತ್ತು ಆರ್ಥಿಕ ಪ್ರೋತ್ಸಾಹಕ ಯೋಜನೆಗಳನ್ನು ಸರ್ಕಾರ ರೂಪಿಸಿ ಜಾರಿಗೊಳಿಸಿದೆಯೇ; ಹೌದಾದಲ್ಲಿ, ಆ ಕುರಿತಾದ ವಿವರಗಳೇನು;	ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನವೋದ್ಯಮ ವಲಯವೂ ಸೇರಿದಂತೆ ಉದ್ಯಮ ವಲಯದಲ್ಲಿ ಮಹಿಳಾ ಉದ್ಯಮಿಗಳ ಪ್ರಮಾಣದ ನಿಖರವಾದ ಮಾಹಿತಿ ಲಭ್ಯವಿರುವುದಿಲ್ಲ. ಉದ್ಯಮಗಳ ಸ್ಥಾಪನೆಗಾಗಿ ಕರ್ನಾಟಕ ಸರ್ಕಾರವು ಆದೇಶ ಸಂಖ್ಯೆ ಸಿಐ 199 ಎಸ್‌ಪಿಐ 2018, ದಿನಾಂಕ 13-08-2020 ರನ್ವಯ ಹೊಸ ಕೈಗಾರಿಕಾ ನೀತಿ 2020-2025 ಅನ್ನು ಜಾರಿಗೆ ತಂದಿದ್ದು, ಇದರಲ್ಲಿ ಹೊಸದಾಗಿ / ವಿಸ್ತರಣೆ / ಆಧುನೀಕರಣ / ವೈವಿದ್ಧಿಕರಣ ಕಾರ್ಯಕ್ರಮದಡಿ ಹೊಸ ಬಂಡವಾಳ ಹೂಡುವ ಮಹಿಳಾ ಉದ್ದಿಮೆದಾರರಿಗೆ ಈ ಕೆಳಗಿನ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ಘೋಷಿಸಲಾಗಿದೆ. (ವಿವರಗಳನ್ನು ಅನುಬಂಧ-2ರಲ್ಲಿ ಲಗತ್ತಿಸಿದೆ) 1. ಬಂಡವಾಳ ಹೂಡಿಕೆ ಸಹಾಯಧನ 2. ಮುದ್ರಾಂಕ ಶುಲ್ಕ ವಿನಾಯಿತಿ 3. ನೊಂದಣಿ ಶುಲ್ಕ ರಿಯಾಯಿತಿ 4. ಭೂಪರಿವರ್ತನಾ ಶುಲ್ಕ ಮರುಪಾವತಿ 5. ತ್ಯಾಜ್ಯ ಸಂಸ್ಕರಣಾಘಟಕ ಸ್ಥಾಪನೆಗೆ ಸಹಾಯಧನ 6. ವಿದ್ಯುತ್ ತೆರಿಗೆ ವಿನಾಯಿತಿ 7. ತಂತ್ರಜ್ಞಾನ ಉನ್ನತೀಕರಣಕ್ಕೆ ಪಡೆದ ಸಾಲಕ್ಕೆ ಬಡ್ಡಿ ಸಹಾಯಧನ 8. ಐ.ಎಸ್.ಓ ಪ್ರಮಾಣ ಪತ್ರ ಸಹಾಯಧನ 9. ಬಿ.ಐ.ಎಸ್.ಪ್ರಮಾಣಪತ್ರ ಸಹಾಯಧನ 10. ವಿ-ಕನೆಕ್ಟ್ ಪ್ರಮಾಣಪತ್ರ ಸಹಾಯಧನ

		11. ತಂತ್ರಜ್ಞಾನ ಅಳವಡಿಕೆ ಸಹಾಯಧನ 12. ಎಲೆಕ್ಟ್ರಾನಿಕ್ ತ್ಯಾಜ್ಯ ಮತ್ತು ಪ್ಲಾಸ್ಟಿಕ್ ತ್ಯಾಜ್ಯ ಪುನರ್‌ಬಳಕೆ ಸಹಾಯಧನ 13. ಮಳೆನೀರು ಕೊಯ್ಲು ಸಹಾಯಧನ 14. ನೀರಿನ ಪುನರ್ ಬಳಕೆ ಸಹಾಯಧನ
ಇ	ಕಾರ್ಮಿಕರ ಸಹಿತ ಮತ್ತು ರಹಿತ ಮಹಿಳಾ ಸಣ್ಣ ಪ್ರಮಾಣದ ಉದ್ಯಮಗಳಿಗೆ ಸರ್ಕಾರ ಸೂಕ್ತ ಪ್ರಮಾಣದ ಆರ್ಥಿಕ ನೆರವು ಹಾಗೂ ಮಾರ್ಗದರ್ಶನ ಮತ್ತು ತರಬೇತಿ ನೀಡಿ ಮುನ್ನಡೆ ಸಾಧಿಸಲು ಇಲಾಖೆಯು ಹಮ್ಮಿಕೊಂಡ ಕ್ರಿಯಾ ಯೋಜನೆಗಳೇನು?	ಕರ್ನಾಟಕ ಸರ್ಕಾರವು ಆದೇಶ ಸಂಖ್ಯೆ: ಸಿಐ 199 ಎಸ್‌ಪಿಐ 2018 ದಿನಾಂಕ: 13-08-2020 ರನ್ವಯ ಹೊಸ ಕೈಗಾರಿಕಾ ನೀತಿ 2020-2025 ಅನ್ನು ಜಾರಿಗೆ ತಂದಿದ್ದು, ಇದರಲ್ಲಿ ಹೊಸದಾಗಿ/ವಿಸ್ತರಣೆ/ಆಧುನೀಕರಣ/ವೈವಿಧ್ಯೀಕರಣ ಕಾರ್ಯಕ್ರಮದಡಿ ಹೊಸ ಬಂಡವಾಳ ಹೂಡುವ ಮಹಿಳಾ ಉದ್ದಿಮೆದಾರರಿಗೆ ಈ ಕೆಳಗಿನ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ಘೋಷಿಸಲಾಗಿದೆ. 1. ಬಂಡವಾಳ ಹೂಡಿಕೆ ಸಹಾಯಧನ 2. ಮುದ್ರಾಂಕ ಶುಲ್ಕ ವಿನಾಯಿತಿ 3. ನೊಂದಣಿ ಶುಲ್ಕ ರಿಯಾಯಿತಿ 4. ಭೂಪರಿವರ್ತನಾ ಶುಲ್ಕ ಮರುಪಾವತಿ 5. ತ್ಯಾಜ್ಯ ಸಂಸ್ಕರಣಾಘಟಕ ಸ್ಥಾಪನೆಗೆ ಸಹಾಯಧನ 6. ವಿದ್ಯುತ್‌ತೆರಿಗೆ ವಿನಾಯಿತಿ 7. ತಂತ್ರಜ್ಞಾನಉನ್ನತೀಕರಣಕ್ಕೆ ಪಡೆದ ಸಾಲಕ್ಕೆ ಬಡ್ಡಿ ಸಹಾಯಧನ 8. ಐ.ಎಸ್.ಓ ಪ್ರಮಾಣ ಪತ್ರ ಸಹಾಯಧನ 9. ಬಿ.ಐ.ಎಸ್.ಪ್ರಮಾಣಪತ್ರ ಸಹಾಯಧನ 10. ವಿ-ಕನೆಕ್ಟ್ ಪ್ರಮಾಣಪತ್ರ ಸಹಾಯಧನ 11. ತಂತ್ರಜ್ಞಾನ ಅಳವಡಿಕೆ ಸಹಾಯಧನ 12. ಎಲೆಕ್ಟ್ರಾನಿಕ್‌ತ್ಯಾಜ್ಯ ಮತ್ತು ಪ್ಲಾಸ್ಟಿಕ್ ತ್ಯಾಜ್ಯ ಪುನರ್‌ಬಳಕೆ ಸಹಾಯಧನ 13. ಮಳೆನೀರು ಕೊಯ್ಲು ಸಹಾಯಧನ 14. ನೀರಿನ ಪುನರ್ ಬಳಕೆ ಸಹಾಯಧನ

ಸಂಖ್ಯೆ: ಮಮಇ/13/ಮಅನಿ 2021

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಕರ್ನಾಟಕ ಸರ್ಕಾರ

ಸಂಖ್ಯೆ: ಪಸಂಮೀಇ-10 ಪಸಸೇ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು ದಿನಾಂಕ: 01.02.2021

ಇವರಿಂದ :-
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
ಬೆಂಗಳೂರು.

173
4/5
03/2/21

ಇವರಿಗೆ :-
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ
ವಿಧಾನ ಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ:- ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ. ವೆಂಕಟ್‌ರಾವ್ ನಾಡಗೌಡ (ಸಿಂಧನೂರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 762 ಕ್ಕೆ ಉತ್ತರ ಒದಗಿಸುವ ಬಗ್ಗೆ.

****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ. ವೆಂಕಟ್‌ರಾವ್ ನಾಡಗೌಡ (ಸಿಂಧನೂರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 762 ಕ್ಕೆ ಕನ್ನಡ ಉತ್ತರದ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿತಳಾಗಿದ್ದೇನೆ.

ತಮ್ಮ ನಂಬುಗೆಯ,

Kavya H.N. 01/02/2021
(ಕಾವ್ಯ ಹೆಚ್.ಎನ್.)
ಶಾಖಾಧಿಕಾರಿ-2
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
(ಪಶುಸಂಗೋಪನೆ-ಎ)
01/2/2021

ಪ್ರತಿ:

ಮಾನ್ಯ ಪಶುಸಂಗೋಪನೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	762
ಸದಸ್ಯರ ಹೆಸರು	:	ಶ್ರೀ.ವೆಂಕಟ್‌ರಾವ್ ನಾಡಗೌಡ (ಸಿಂಧನೂರು)
ಉತ್ತರಿಸುವ ದಿನಾಂಕ	:	03.02.2021
ಉತ್ತರಿಸುವ ಸಚಿವರು	:	ಪಶುಸಂಗೋಪನೆ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ)</td><td>ಪಶುಸಂಗೋಪನೆ ಇಲಾಖೆಯಲ್ಲಿ ಇರುವ ಪಶುವೈದ್ಯರ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)</td><td>ಪಶುಸಂಗೋಪನೆ ಇಲಾಖೆಯಲ್ಲಿ ವಿವಿಧ ವೃಂದದ ಒಟ್ಟು 3317 ಪಶುವೈದ್ಯರ ಹುದ್ದೆಗಳ ಮಂಜೂರಾತಿ ಇದ್ದು, ವಿವರಗಳನ್ನು ಈ ಕೆಳಕಂಡಂತೆ ನೀಡಲಾಗಿದೆ.
<table>
<tr><th>ಕ್ರ. ಸಂ</th><th>ಹುದ್ದೆ</th><th>ಮಂ</th><th>ಭರ್ತಿ</th><th>ಖಾಲಿ</th></tr>
<tr><td>1.</td><td>ಮುಖ್ಯ ಪಶುವೈದ್ಯಾಧಿಕಾರಿ</td><td>715</td><td>770</td><td rowspan="3">ಸದರಿ 03 ವೃಂದಗಳು ಸೇರಿ ಒಟ್ಟು 1244 ಹುದ್ದೆಗಳು ಖಾಲಿ ಇರುತ್ತವೆ.</td></tr>
<tr><td>2.</td><td>ಹಿರಿಯ ಪಶುವೈದ್ಯಾಧಿಕಾರಿ</td><td>1000</td><td>553</td></tr>
<tr><td>3.</td><td>ಪಶುವೈದ್ಯಾಧಿಕಾರಿ</td><td>1602</td><td>754</td></tr>
<tr><td></td><td>ಒಟ್ಟು</td><td>3317</td><td>2077</td><td>1244</td></tr>
</table></td></tr>
<tr><td>ಆ)</td><td>ಖಾಲಿ ಇರುವ ಹುದ್ದೆಗಳೆಷ್ಟು;</td><td>ಒಟ್ಟು 1244 ಪಶುವೈದ್ಯರ ಹುದ್ದೆಗಳು ಖಾಲಿ ಇರುತ್ತದೆ.</td></tr>
<tr><td>ಇ)</td><td>ಇವುಗಳನ್ನು ತುಂಬಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಇದ್ದಲ್ಲಿ ತೆಗೆದುಕೊಂಡಿರುವ ಕ್ರಮಗಳೇನು?</td><td>ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಲ್ಲಿ ಖಾಲಿ ಇರುವ ಮುಖ್ಯ ಪಶುವೈದ್ಯಾಧಿಕಾರಿ (ಆಡಳಿತ) ಹಾಗೂ ಮುಖ್ಯ ಪಶುವೈದ್ಯಾಧಿಕಾರಿ ಮತ್ತು ಹಿರಿಯ ಪಶುವೈದ್ಯಾಧಿಕಾರಿಗಳ ಖಾಲಿ ಹುದ್ದೆಗಳನ್ನು ಹಂತ ಹಂತವಾಗಿ ಪಶುವೈದ್ಯಾಧಿಕಾರಿ ಹುದ್ದೆಯಿಂದ ಕಾಲಮಿತಿ ಪದೋನ್ನತಿ/ಮುಂಬಡ್ತಿ ಮುಖಾಂತರ ತುಂಬಲು ಕ್ರಮವಹಿಸಲಾಗಿದೆ ಹಾಗೂ ಇಲಾಖೆಯಲ್ಲಿ ಖಾಲಿ ಇರುವ 639 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮಗಳ ಮುಖಾಂತರ ಭರ್ತಿ ಮಾಡುವ ಪ್ರಸ್ತಾವನೆಗೆ ಪ್ರಸ್ತುತ ಆರ್ಥಿಕ ನಿರ್ಬಂಧಗಳ ಹಿನ್ನಲೆಯಲ್ಲಿ ಆರ್ಥಿಕ ಇಲಾಖೆಯ ಸಹಮತಿ ನೀಡಿರುವುದಿಲ್ಲ,

ಮುಂದುವರೆದು, 371 (ಜೆ) ರಡಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ 61 ಪಶುವೈದ್ಯಾಧಿಕಾರಿ ಹುದ್ದೆಗಳನ್ನು, ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಗಳನ್ನು ರಚಿಸಿ</td></tr>
</table>

		ಅಧಿಸೂಚನೆ ಹೊರಡಿಸಲಾಗಿರುತ್ತದೆ. ಆದರೆ ಆರ್ಥಿಕ ಇಲಾಖೆಯು ದಿನಾಂಕ: 06.07.2020 ರ ಸುತ್ತೋಲೆಯಲ್ಲಿ ಆರ್ಥಿಕ ನಿರ್ಬಂಧಗಳ ಹಿನ್ನಲೆಯಲ್ಲಿ 2020-21 ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ-ಕರ್ನಾಟಕ ಭಾಗದ ಹುದ್ದೆಗಳು ಹಾಗೂ ಬ್ಯಾಕ್ ಲಾಗ್ ಹುದ್ದೆಗಳು ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯುವಂತೆ ತಿಳಿಸಿರುತ್ತದೆ. ಆದುದರಿಂದ ಸದರಿ ನೇಮಕಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಮುಂದಿನ ಆದೇಶದವರೆಗೂ ತಡೆ ಹಿಡಿಯಲಾಗಿರುತ್ತದೆ.
ಈ)	ಪ್ರಸ್ತುತ ಇರುವ ವೈದ್ಯರಲ್ಲಿ ಎಷ್ಟು ಜನ ವೈದ್ಯರು ಬೇರೆ ಇಲಾಖೆಯಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿದ್ದಾರೆ;	ಪ್ರಸ್ತುತ ಇರುವ ಪಶುವೈದ್ಯಾಧಿಕಾರಿಗಳ ಪೈಕಿ ಒಟ್ಟು 90 ಪಶುವೈದ್ಯಾಧಿಕಾರಿಗಳು ಬೇರೆ ಇಲಾಖೆಯಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುತ್ತಾರೆ.
ಉ)	ವೈದ್ಯರುಗಳನ್ನು ಬೇರೆ ಇಲಾಖೆಗೆ ನಿಯೋಜಿಸುವ ಉದ್ದೇಶವೇನು? (ವಿವರ ಒದಗಿಸುವುದು)	ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಪಶುವೈದ್ಯರನ್ನು ಪಶುವೈದ್ಯಕೀಯ ಚಟುವಟಿಕೆಗಳಿಗೆ ಪೂರಕ ಚಟುವಟಿಕೆಯಿರುವ ಇಲಾಖೆಗಳಾದ ಅರಣ್ಯ, ಪುರಸಭೆ, ಮಹಾನಗರ ಪಾಲಿಕೆ, ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆ ಮತ್ತು ಪಶುವೈದ್ಯ ಮಹಾವಿದ್ಯಾಲಯ ಇವೇ ಮುಂತಾದ ಇಲಾಖೆಗಳಿಗೆ ಪಶುವೈದ್ಯಕೀಯ ಸೇವೆ ನೀಡಲು ನಿಯೋಜಿಸಲಾಗಿದೆ.

ಸಂ: ಪಸಂಮೀ ಇ-10 ಪಸಸೇ 2021

(ಪ್ರಭು.ಬಿ.ಚವ್ಹಾಣ್)
ಪಶುಸಂಗೋಪನೆ/ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಪಸಂಮೀ ಇ-07 ಪಸಸೇ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು ದಿನಾಂಕ: 01.02.2021

08
41S
03/2/21

ಇವರಿಂದ :-
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
ಬೆಂಗಳೂರು.

ಇವರಿಗೆ :-
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ
ವಿಧಾನ ಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ:- ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ. ಐಹೊಳೆ.ಡಿ.ಮಹಾಲಿಂಗಪ್ಪ (ರಾಯಭಾಗ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 580 ಕ್ಕೆ ಉತ್ತರ ಒದಗಿಸುವ ಬಗ್ಗೆ.

****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ. ಐಹೊಳೆ.ಡಿ.ಮಹಾಲಿಂಗಪ್ಪ (ರಾಯಭಾಗ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 580 ಕ್ಕೆ ಕನ್ನಡ ಉತ್ತರದ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿತಳಾಗಿದ್ದೇನೆ.

ತಮ್ಮ ನಂಬುಗೆಯ,

Kavya H.N. 01/02/2021
(ಕಾವ್ಯ ಹೆಚ್.ಎನ್.)
ಶಾಖಾಧಿಕಾರಿ-2
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
(ಪಶುಸಂಗೋಪನೆ-ಎ)
01/2/2021

ಪ್ರತಿ:
ಮಾನ್ಯ ಪಶುಸಂಗೋಪನೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	580
ಸದಸ್ಯರ ಹೆಸರು	:	ಶ್ರೀ.ಐಹೊಳೆ.ಡಿ.ಮಹಾಲಿಂಗಪ್ಪ (ರಾಯಭಾಗ)
ಉತ್ತರಿಸುವ ದಿನಾಂಕ	:	03.02.2021
ಉತ್ತರಿಸುವ ಸಚಿವರು	:	ಪಶುಸಂಗೋಪನೆ ಸಚಿವರು

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
ಅ)	ಬೆಳಗಾವಿ ಜಿಲ್ಲೆ, ರಾಯಭಾಗ ಮತಕ್ಷೇತ್ರದ ರಾಯಭಾಗ ಹಾಗೂ ಚಿಕ್ಕೋಡಿ ತಾಲ್ಲೂಕುಗಳಲ್ಲಿರುವ ಪಶು ಚಿಕಿತ್ಸಾಲಯಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಹೌದು.
ಆ)	ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಇವುಗಳನ್ನು ಮೇಲ್ದರ್ಜೆಗೇರಿಸಲಾಗುವುದು;	ಸರ್ಕಾರದ ಆದೇಶ ಸಂಖ್ಯೆ: ಪಸಂಮೀ 278 ಪಸಸೇ 2016, ದಿನಾಂಕ: 09.10.2017 ರನ್ವಯ ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು 2017-18 ನೇ ಸಾಲಿನಿಂದ 2020-21 ನೇ ಸಾಲಿನವರೆಗೆ ಹಂತ ಹಂತವಾಗಿ ಮೇಲ್ದರ್ಜೆಗೇರಿಸಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿರುತ್ತದೆ. 2017-18 ನೇ ಸಾಲಿನಲ್ಲಿ ಈಗಾಗಲೇ 302 ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು ಪಶುಚಿಕಿತಾಲಯಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದ್ದು, ಈ ಸಂದರ್ಭದಲ್ಲಿ ಚಿಕ್ಕೋಡಿ ತಾಲ್ಲೂಕಿನ ಅಕ್ಕೋಳ ಹಾಗೂ ರಾಯಬಾಗ್ ತಾಲ್ಲೂಕಿನ ಅಳಗವಾಡಿ ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು ಪಶುಚಿಕಿತ್ಸಾಲಯಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿರುತ್ತದೆ. ಉಳಿದಂತೆ 2018-19 ನೇ ಸಾಲಿನಲ್ಲಿ 400 ಹಾಗೂ 2019-20 ನೇ ಸಾಲಿನಲ್ಲಿ 400 ಒಟ್ಟು 800 ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು ಪಶುಚಿಕಿತಾಲಯಗಳನ್ನಾಗಿ ಮೇಲ್ದರ್ಜೆಗೇರಿಸಬೇಕಾಗಿದ್ದು, ಈ ಸಂಬಂಧ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿರುತ್ತದೆ. ಆರ್ಥಿಕ ಇಲಾಖೆಯ ಸಹಮತಿ ದೊರೆತ ನಂತರ ಅದ್ಯತೆ ಮೇರೆಗೆ ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು ಪಶು

		ಚಿಕಿತ್ಸಾಲಯಗಳನ್ನಾಗಿ ಮೇಲ್ದರ್ಜೇಗೇರಿಸಲು ಕ್ರಮ ವಹಿಸಲಾಗುವುದು.
ಇ)	ಇಲ್ಲದಿದ್ದಲ್ಲಿ, ಕಾರಣಗಳೇನು? (ವಿವರ ನೀಡುವುದು)	ಅನ್ವಯಿಸುವುದಿಲ್ಲ.

ಸಂ: ಪಸಂಮೀ ಇ-07 ಪಸಸೇ 2021

(ಪ್ರಭು.ಬಿ.ಚವ್ಹಾಣ್)
ಪಶುಸಂಗೋಪನೆ ಸಚಿವರು

ಕರ್ನಾಟಕ ಸರ್ಕಾರ

ಸಂ: ಮಮಇ 34 ಐಸಿಡಿ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 02.02.2021.

U/S 125 3/2/21

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭಾ ಸಚಿವಾಲಯ,
ವಿಧಾನಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನಸಭಾ ಸದಸ್ಯರು **ಶ್ರೀ ರಾಜೇಗೌಡ ಟಿ.ಡಿ.,** ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:634ಕ್ಕೆ ಉತ್ತರಿಸುವ ಬಗ್ಗೆ.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ **ಶ್ರೀ ರಾಜೇಗೌಡ ಟಿ.ಡಿ.,** ಇವರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 634ಕ್ಕೆ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Padmini S.N 2/2/21
(ಪದ್ಮಿನಿ ಎಸ್ ಎನ್)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	634
ಸದಸ್ಯರ ಹೆಸರು	:	ಶ್ರೀ ರಾಜೇಗೌಡ ಟಿ.ಡಿ. (ಶೃಂಗೇರಿ)
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
ಉತ್ತರಿಸಬೇಕಾದ ದಿನಾಂಕ	:	03/02/2021

ಕ್ರ ಸಂ.	ಪ್ರಶ್ನೆ	ಉತ್ತರ
ಅ.	ಕೋವಿಡ್ ಲಾಕ್‌ಡೌನ್ ಸಮಯದಲ್ಲಿ ಸರ್ಕಾರ ವಿವಿಧ ಶ್ರಮಿಕ ವರ್ಗಕ್ಕೆ ಪರಿಹಾರ ನೀಡಿದಂತೆ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರುಗಳಿಗೆ ಪರಿಹಾರ ಘೋಷಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಹೌದು. ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರು ಕೋವಿಡ್-19ರ ಚಟುವಟಿಕೆಗಳಲ್ಲಿ ಆಶಾ ಕಾರ್ಯಕರ್ತೆಯರೊಂದಿಗೆ ಪಾಲ್ಗೊಂಡಿರುವುದರಿಂದ, ಸದರಿಯವರಿಗೂ ಸಹ ರೂ.5,000/- ಗಳ ಪ್ರೋತ್ಸಾಹಧನವನ್ನು ನೀಡುವಂತೆ ದಿನಾಂಕ: 08/06/2020 ರಂದು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದ್ದು, ಕೇಂದ್ರ ಸರ್ಕಾರದಿಂದ ಮಂಜೂರಾತಿ ನಿರೀಕ್ಷಿಸಲಾಗಿದೆ.
ಆ.	ಈ ಬಗ್ಗೆ ಸರ್ಕಾರದ ನಿಲುವೇನು;	
ಇ.	ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರುಗಳ ವೇತನ ಹೆಚ್ಚಳ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?	ಕೇಂದ್ರ ಸರ್ಕಾರದ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಸೇವೆಯು ಗೌರವಧನ ಆಧಾರಿತ ಸೇವೆಯಾಗಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಗೌರವಧನವನ್ನು ಪಾವತಿಸಲಾಗುತ್ತಿದೆ. 2019-20ನೇ ಸಾಲಿನಲ್ಲಿ ಸದರಿ ಕಾರ್ಯಕರ್ತೆ / ಸಹಾಯಕಿಯರ ಗೌರವಧನವನ್ನು ಹೆಚ್ಚಿಸಲಾಗಿದ್ದು, ಪ್ರಸ್ತುತ ಗೌರವಧನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ,
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ: ಮಮಇ 34 ಐಸಿಡಿ 2021

ಕರ್ನಾಟಕ ಸರ್ಕಾರ

ಸಂಖ್ಯೆ:ಮಮಇ 36 ಪಿಹೆಚ್‌ಪಿ 2021

ಕರ್ನಾಟಕ ಸರ್ಕಾರ ಸಚಿವಾಲಯ
3ನೇ ಗೇಟ್, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:03.02.2021

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬಹುಮಹಡಿಗಳ ಕಟ್ಟಡ, ಬೆಂಗಳೂರು-1.

60
3/2/21

ಇವರಿಗೆ;
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ,
ಬೆಂಗಳೂರು-560 001.

ಮಾನ್ಯರೆ,

ವಿಷಯ: ಶ್ರೀ ಹ್ಯಾರಿಸ್ ಎನ್. ಎ., ಮಾನ್ಯ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:588ಕ್ಕೆ ಉತ್ತರ ಸಲ್ಲಿಸುವ ಬಗ್ಗೆ.

ಉಲ್ಲೇಖ: ಕರ್ನಾಟಕ ವಿಧಾನ ಸಭೆ ಸಚಿವಾಲಯದ ಪತ್ರ ಸಂಖ್ಯೆ:ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.588/2021, ದಿ:23.01.2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ಹ್ಯಾರಿಸ್ ಎನ್. ಎ., ಮಾನ್ಯ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:588ಕ್ಕೆ ಸಂಬಂಧಿಸಿದಂತೆ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿ ಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

G. H. Saroja

(ಜಿ. ಹೆಚ್. ಸರೋಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ – 2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 588
ಸದಸ್ಯರ ಹೆಸರು : ಶ್ರೀ ಹ್ಯಾರಿಸ್‌ಎನ್. ಎ.
ಉತ್ತರಿಸುವ ದಿನಾಂಕ : 03.02.2021
ಉತ್ತರಿಸುವ ಸಚಿವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿನ ಹಿರಿಯ ನಾಗರಿಕರು, ಅಶಕ್ತರು, ಅಂಗವಿಕಲರು, ವಿಧವೆಯರಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಹಿರಿಯ ನಾಗರೀಕರ, ವಿಶಿಷ್ಟ ಚೇತನರ ಸಬಲೀಕರಣ ಇಲಾಖೆಯು ಒದಗಿಸಿಕೊಡುತ್ತಿರುವ ಯೋಜನಾ ಸೌಲಭ್ಯಗಳನ್ನು ಫಲಾನುಭವಿಗಳಿಗೆ ತಲುಪಿಸುವಲ್ಲಿ ಇಲಾಖೆಯು ಅನುಸರಿಸುತ್ತಿರುವ ಕ್ರಮಗಳೇನು;	ರಾಜ್ಯದಲ್ಲಿನ ಹಿರಿಯ ನಾಗರಿಕರಿಗೆ, ಅಂಗವಿಕಲರಿಗೆ ಇಲಾಖೆಯಿಂದ ಒದಗಿಸಿಕೊಡುತ್ತಿರುವ ಯೋಜನಾ ಸೌಲಭ್ಯಗಳನ್ನು ಫಲಾನುಭವಿಗಳಿಗೆ ತಲುಪಿಸುವಲ್ಲಿ ಇಲಾಖೆಯು ಈ ಕೆಳಕಂಡ ಕ್ರಮಗಳನ್ನು ಅನುಸರಿಸುತ್ತಿದೆ. • ವಿಕಲಚೇತನರಿಗೆ ಅವರಿದ್ದಲ್ಲಿಗೆ ಯೋಜನೆಗಳ ಸೌಲಭ್ಯವನ್ನು ತಲುಪಿಸಲು ಗ್ರಾಮೀಣ ಪುನರ್ವಸತಿ ಯೋಜನೆಯನ್ನು ಜಾರಿಗೊಳಿಸಲಾಗಿದೆ. • ಅಂಗವಿಕಲರನ್ನು ಗ್ರಾಮೀಣ ಮಟ್ಟದಲ್ಲಿ ಗ್ರಾಮ ಪುನರ್ವಸತಿ ಕಾರ್ಯಕರ್ತರನ್ನಾಗಿ, ತಾಲ್ಲೂಕು ಮಟ್ಟದಲ್ಲಿ ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರನ್ನಾಗಿ, ನಗರ ಸಭೆ ಮಟ್ಟದಲ್ಲಿ ನಗರ ಪುನರ್ವಸತಿ ಕಾರ್ಯಕರ್ತರನ್ನಾಗಿ ನೇಮಕಗೊಳಿಸಿದ್ದು, ಇವರು ಫಲಾನುಭವಿಗಳನ್ನು ಗುರುತಿಸಿ ಅವರಿಗೆ ಯೋಜನೆಯ ಸೌಲಭ್ಯಗಳನ್ನು ಒದಗಿಸಲು ಕಾರ್ಯನಿರ್ವಹಿಸುತ್ತಿದ್ದಾರೆ. • ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿಗಳು ಯೋಜನೆಗಳ ಬಗ್ಗೆ ವ್ಯಾಪಕ ಪ್ರಚಾರ ನೀಡಿ, ಆಯಾಯ ಜಿಲ್ಲೆಯ ಹಿರಿಯ ನಾಗರಿಕರಿಗೆ, ಅಂಗವಿಕಲರಿಗೆ ಇಲಾಖೆಯಿಂದ ಯೋಜನಾ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. • ಜಿಲ್ಲಾ ಕಛೇರಿಗಳಲ್ಲಿ ಇಲಾಖಾ ಕಾರ್ಯಕ್ರಮ/ ಯೋಜನೆಗಳ ಸಲಹಾ/ಮಾಹಿತಿ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಈ ಕೇಂದ್ರದ ಮೂಲಕ ಹಿರಿಯ ನಾಗರಿಕರಿಗೆ, ಅಂಗವಿಕಲರಿಗೆ ಯೋಜನೆಗಳ ಬಗ್ಗೆ ಸೂಕ್ತ ಮಾಹಿತಿ/ ಸಲಹೆಯನ್ನು ಒದಗಿಸಲಾಗುತ್ತಿದೆ. ಈ ಮೇಲೆ ತಿಳಿಸಿರುವ ಎಲ್ಲಾ ಕಾರ್ಯಕರ್ತರುಗಳು ಇಲಾಖೆಯ ಸೌಲಭ್ಯಗಳಲ್ಲದೇ ಇತರೆ ಇಲಾಖೆಗಳಲ್ಲಿ ದೊರೆಯುವ ಯೋಜನೆಗಳ ಮಾಹಿತಿಗಳನ್ನು ಸಹ ನೀಡುವುದರ ಜೊತೆಗೆ ಅವುಗಳನ್ನು ಪಡೆಯಲು ಸಹಕಾರಿಯಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.
ಆ)	ಅವರುಗಳಿಗೆ ಸರ್ಕಾರ ನಿಗದಿ ಪಡಿಸಿರುವ ಇಲಾಖಾ ಯೋಜನೆ ಸೌಲಭ್ಯಗಳೊಂದಿಗೆ ಮಾಸಿಕ ಪಿಂಚಣಿ ಇತ್ಯಾದಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸೌಲಭ್ಯ ಸೌಕರ್ಯಗಳನ್ನು ಒದಗಿಸಿಕೊಡುವಲ್ಲಿ	• ಈ ಮೇಲೆ ವಿವರಿಸಿರುವಂತೆ ಗ್ರಾಮೀಣ ಮಟ್ಟದಲ್ಲಿ, ತಾಲ್ಲೂಕು ಮಟ್ಟದಲ್ಲಿ, ನಗರ ಸಭೆ ಮಟ್ಟದಲ್ಲಿ ಪುನರ್ವಸತಿ ಕಾರ್ಯಕರ್ತರನ್ನು ನೇಮಿಸಿಕೊಂಡಿದ್ದು, ಈ ಎಲ್ಲಾ ಕಾರ್ಯಕರ್ತರ ಮುಖಾಂತರ ಹಿರಿಯ ನಾಗರಿಕರಿಗೆ ಮತ್ತು ಅಂಗವಿಕಲರಿಗೆ ಇಲಾಖಾ ಯೋಜನೆ ಸೌಲಭ್ಯಗಳೊಂದಿಗೆ

	ಇಲಾಖೆಯ ಪರಿಣಾಮಕಾರಿ ಕ್ರಮಗಳು ಯಾವುವು;	ಮಾಸಿಕ ಪಿಂಚಣಿ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸೌಲಭ್ಯ ಸೌಕರ್ಯಗಳನ್ನು ಒದಗಿಸುವಲ್ಲಿ ಕ್ರಮಕೈಗೊಳ್ಳಲಾಗಿದೆ. • ಜಿಲ್ಲಾ ಕಛೇರಿಗಳಲ್ಲಿ ಇಲಾಖಾ ಕಾರ್ಯಕ್ರಮ/ ಯೋಜನೆಗಳ ಬಗ್ಗೆ ಸಲಹಾ/ ಮಾಹಿತಿ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಈ ಕೇಂದ್ರದ ಮೂಲಕ ಹಿರಿಯ ನಾಗರಿಕರಿಗೆ, ಅಂಗವಿಕಲರಿಗೆ ಯೋಜನೆಗಳ ಮಾಹಿತಿಗಳನ್ನು ಅವಶ್ಯಕವಾದಲ್ಲಿ ಸೂಕ್ತ ಸಲಹೆ ಮಾರ್ಗದರ್ಶನವನ್ನು ಒದಗಿಸಲಾಗುತ್ತಿದೆ.
ಇ)	ಪಂಚಾಯತ್ ಮಟ್ಟದಿಂದ ಪ್ರಾರಂಭಿಸಿ ಮಹಾ ನಗರಗಳನ್ನೂ ಪರಿಗಣಿಸಿ ಇಂಥ ಫಲಾನುಭವಿಗಳ ಸಮೀಕ್ಷೆ ನಡೆಸಿ ಅರ್ಹರಿಗೆ ಸರ್ಕಾರದ ಯೋಜನಾ ಸೌಲಭ್ಯಗಳು ತಲುಪುವಂತೆ ಮಾಡುವಲ್ಲಿ ಸರ್ಕಾರದ ಉದಾರ ಮಾನವೀಯತೆಯ ಕ್ರಿಯಾಯೋಜನೆಗಳೇನು; ಫಲಾನುಭವಿಗಳು ಸರ್ಕಾರದಿಂದ ಸಾಂವಿಧಾನಿಕ ಸೌಲಭ್ಯಗಳನ್ನು ಪಡೆಯುವಲ್ಲಿ ಲೋಪದೋಷಗಳಿಲ್ಲದಂತೆ ನೋಡಿಕೊಳ್ಳಲು ಆಡಳಿತ ವ್ಯವಸ್ಥೆಗೆ ಸರ್ಕಾರ ನಿಗದಿಪಡಿಸಿರುವ ಮಾರ್ಗಸೂಚಿಗಳು ಯಾವುವು?	• 2011ರ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಜನಗಣತಿ ಮಾಹಿತಿ ಆಧರಿಸಿ ಪ್ರತಿ ಆರ್ಥಿಕ ವರ್ಷದ ಅಂತ್ಯದಲ್ಲಿ ಯೋಜನೆಗಳ ಅನುಷ್ಠಾನಕ್ಕಾಗಿ ಮುಂದಿನ ಆರ್ಥಿಕ ವರ್ಷದ ಆಯವ್ಯಯದ ಬೇಡಿಕೆಯನ್ನು ಸೂಕ್ತ ಸಮರ್ಥನೆಯೊಂದಿಗೆ, ಅನುಮೋದನೆ ಪಡೆದು ಆಯವ್ಯಯವನ್ನು ಪಡೆಯಲಾಗುತ್ತದೆ. • 2011ರ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಜನಗಣತಿ ಮಾಹಿತಿ ಆಧರಿಸಿ ಅಂಗವಿಕಲರ ಹಕ್ಕುಗಳ ಅಧಿನಿಯಮ 2016, ಹಿರಿಯ ನಾಗರಿಕರ ನಿರ್ವಹಣಾ ಕಾಯಿದೆ 2007, ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅಂಗವಿಕಲರ ಮತ್ತು ಹಿರಿಯ ನಾಗರಿಕರ ನೀತಿಗಳನುಸಾರ ಅವಶ್ಯಕ ಹೊಸ ಯೋಜನೆಗಳನ್ನು ಅಂಗವಿಕಲರ ಮತ್ತು ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ರೂಪಿಸಲಾಗಿದೆ. • ಆಯಾ ಜಿಲ್ಲೆಗಳ ಬೇಡಿಕೆಯನುಸಾರ ಮತ್ತು ಇಲಾಖೆಯ ಆಯವ್ಯಯದ ಲಭ್ಯತೆಯನುಸಾರ ಯೋಜನೆಗಳ ಸೌಲಭ್ಯಗಳನ್ನು ಒದಗಿಸಲು ವಾರ್ಷಿಕವಾಗಿ ಭೌತಿಕ ಮತ್ತು ಆರ್ಥಿಕ ಗುರಿ ನಿಗದಿಪಡಿಸಿ ಆಯವ್ಯಯವನ್ನು ತ್ರೈಮಾಸಿಕವಾಗಿ ಜಿಲ್ಲೆಗಳಿಗೆ ಬಿಡುಗಡೆಗೊಳಿಸಲಾಗುತ್ತದೆ. • ಜಿಲ್ಲಾ ಮಟ್ಟದಲ್ಲಿ ಅನುಷ್ಠಾನಗೊಳಿಸಿರುವ ಯೋಜನೆಗಳ ಪ್ರಗತಿ ಪರಿಶೀಲನೆಯನ್ನು ಪ್ರತಿ ಮಾಹೆ ನಿರ್ದೇಶನಾಲಯದ ಹಂತದಲ್ಲಿ ಪರಿಶೀಲಿಸಿ ಜಿಲ್ಲೆಗಳಿಗೆ ಅವಶ್ಯಕವಾಗಿರುವ ಮಾಹಿತಿ/ ಸಲಹೆ/ ಮಾರ್ಗದರ್ಶನಗಳನ್ನು ನೀಡಲಾಗುತ್ತಿದೆ. • ಸರ್ಕಾರದ ಹಂತದಲ್ಲೂ ಪ್ರತಿ ಮಾಹೆ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಲಾಗುತ್ತಿದೆ. • ಯಾವುದೇ ಲೋಪದೋಷಗಳಿಲ್ಲದಂತೆ ಯೋಜನೆಗಳ ಸೌಲಭ್ಯಗಳನ್ನು ಫಲಾನುಭವಿಗಳಿಗೆ ತಲುಪಿಸುವಲ್ಲಿ ಇಲಾಖೆಯು ಎಲ್ಲಾ ರೀತಿಯಲ್ಲೂ ಕ್ರಮವಹಿಸಿದೆ.

ಸಂಖ್ಯೆ: ಮಮಇ 36 ಪಿಹೆಚ್‌ಪಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ, ಹಿರಿಯ ನಾಗರೀಕರ ಸಬಲೀಕರಣ
ಇಲಾಖಾ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:01/1:ಆರ್‌ಆರ್‌ಸಿ:2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,ಬೆಂಗಳೂರು
ದಿನಾಂಕ:02.02.2021.

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

4U 53 3/2/21

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ ಸಚಿವಾಲಯ,
ವಿಧಾನ ಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 742ಗೆ ಉತ್ತರವನ್ನು ಒದಗಿಸುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:742 ಗೆ ಉತ್ತರವನ್ನು ಸಿದ್ಧಪಡಿಸಿ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

(ರಮೇಶ್ ಎ.ಓ)
ಉಪ ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	742
ಸದಸ್ಯರ ಹೆಸರು	ಶ್ರೀ ಈಶ್ವರ್ ಖಂಡ್ರೆ (ಭಾಲ್ಕಿ)
ಉತ್ತರಿಸಬೇಕಾದ ದಿನಾಂಕ	03.02.2021

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಇಡೀ ರಾಜ್ಯದಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ 30-54 ಮತ್ತು 50-54 ಅಡಿಯಲ್ಲಿ ಮಂಜೂರಾದ ಅನುದಾನದ ಮೊತ್ತ ಎಷ್ಟು; ಎಷ್ಟು ಮೊತ್ತದ ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದೆ; ಎಷ್ಟು ಅನುದಾನ ಖರ್ಚಾಗಿದೆ ಮತ್ತು ಎಷ್ಟು ಹಣ ಬಿಡುಗಡೆ ಮಾಡಲು ಬಾಕಿ ಇದೆ ಹಾಗೂ ಪಾವತಿಯಾಗಲು ಬಾಕಿ ಇರುವ ಜಿಲ್ಲೆಗಳ ಮೊತ್ತವೆಷ್ಟು (ಜಿಲ್ಲಾವಾರು ವಿವರ ಒದಗಿಸುವುದು);	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕಳೆದ 3 ವರ್ಷಗಳ ಅವಧಿಯಲ್ಲಿ ಲೆ.ಶೀ: 3054 ಮತ್ತು ಲೆ.ಶೀ: 5054 ರಡಿಯಲ್ಲಿ ಮಂಜೂರಾದ ಅನುದಾನ ಬಿಡುಗಡೆ ವೆಚ್ಚ, ಬಾಕಿ ಬಿಡುಗಡೆಯ ಜಿಲ್ಲಾವಾರು ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ.
ಆ.	ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನಲ್ಲಿ ಲೆ.ಶೀ: 3054 ಅಡಿಯಲ್ಲಿ ಕಾಮಗಾರಿ ಮುಗಿದು ಒಂದೂವರೆ ವರ್ಷವಾದರೂ ಬಿಲ್ ಪಾವತಿಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ. • 2018-19ನೇ ಸಾಲಿನಲ್ಲಿ ಬೀದರ್ ಜಿಲ್ಲೆ ಬಾಲ್ಕಿ ತಾಲ್ಲೂಕಿಗೆ ಲೆ.ಶೀ: 3054ರಡಿಯಲ್ಲಿ ರೂ. 1000.00 ಲಕ್ಷಗಳ ಅನುದಾನ ಮಂಜೂರಾಗಿದ್ದು, ಸದರಿ ಕಾಮಗಾರಿಗಳನ್ನು ಆರ್ಥಿಕ ಇಲಾಖೆಯ ಸಹಮತಿಯಂತೆ ಲೆ.ಶೀ: 5054ರಡಿ ಮುಂದುವರೆಸಿದೆ. • ಅದರಂತೆ ರೂ. 131.00 ಲಕ್ಷಗಳ ಮೊತ್ತದ ಕಾಮಗಾರಿಗಳು ಪೂರ್ಣಗೊಂಡಿರುತ್ತದೆ. • 2019-20ನೇ ಸಾಲಿನಲ್ಲಿ ಲೆ.ಶೀ: 5054ರಡಿ ರೂ. 22.50 ಲಕ್ಷಗಳನ್ನು ಬಿಡುಗಡೆ ಮಾಡಿ ವೆಚ್ಚ ಭರಿಸಲಾಗಿದೆ. • ಬಾಕಿ ಇರುವ ಅನುದಾನವನ್ನು ಆರ್ಥಿಕ ಇಲಾಖೆಯು ಒದಗಿಸುವ ಅನುದಾನದ ಲಭ್ಯತೆಯ ಮೇರೆಗೆ ಹಾಗೂ ಕಾಮಗಾರಿಗಳ ಪ್ರಗತಿಯನ್ನಾಧರಿಸಿ ಬಿಡುಗಡೆ ಮಾಡಲು ಕ್ರಮ ವಹಿಸಬೇಕಿದೆ.

ಇ	ಗುತ್ತಿಗೆದಾರರ ಬಿಲ್ ಪಾವತಿಯಲ್ಲಿ ಸೀನಿಯಾರಿಟಿ ನಿರ್ವಹಿಸದೇ ನಿಯಮ ಉಲ್ಲಂಘನೆಯಾಗಿರುವುದು ನಿಜವೇ; ಹಾಗಿದ್ದಲ್ಲಿ, ಸೀನಿಯಾರಿಟಿಯಂತೆ ನಿರ್ವಹಿಸಿ ಬಿಲ್ ಪಾವತಿ ಮಾಡಲು ಕ್ರಮವಹಿಸುವುದೇ?	ಗುತ್ತಿಗೆದಾರರ ಬಿಲ್ ಪಾವತಿಯಲ್ಲಿ ಜೇಷ್ಠತೆ ನಿಯಮ ಉಲ್ಲಂಘನೆಯಾಗದಂತೆ ಕ್ರಮವಹಿಸಲಾಗಿದೆ.

ಕಡತ ಸಂಖ್ಯೆ: ಗ್ರಾಅಪ: 15/08 :ಆರ್‌ಆರ್‌ಸಿ:2021

(ಕೆ.ಎಸ್.ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:01/1:ಆರ್‌ಆರ್‌ಸಿ:2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,ಬೆಂಗಳೂರು
ದಿನಾಂಕ:02.02.2021.

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

LA
24
3/2/21

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ ಸಚಿವಾಲಯ,
ವಿಧಾನ ಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 765 ಗೆ ಉತ್ತರವನ್ನು ಒದಗಿಸುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 765 ಗೆ ಉತ್ತರವನ್ನು ಸಿದ್ಧಪಡಿಸಿ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

(ರಮೇಶ್ ಬಿ.ಓ)
ಉಪ ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	765
ಸದಸ್ಯರ ಹೆಸರು	ಶ್ರೀ ಅನಿಲ್ ಚಿಕ್ಕಮಾದು (ಹೆಚ್.ಡಿ.ಕೋಟೆ)
ಉತ್ತರಿಸಬೇಕಾದ ದಿನಾಂಕ	03.02.2021

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	ರಾಜ್ಯದಲ್ಲಿ ಗ್ರಾಮೀಣ ರಸ್ತೆ ಸಂಪರ್ಕವು ಗ್ರಾಮೀಣ ಕ್ಷೇತ್ರದ ಆರ್ಥಿಕ ಹಾಗೂ ಸಾಮಾಜಿಕ ಅಭಿವೃದ್ಧಿಯನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಅನೇಕ ವರ್ಷಗಳಿಂದ ಸಮರ್ಪಕವಾಗಿ ಗ್ರಾಮೀಣ ರಸ್ತೆಗಳು ಅಭಿವೃದ್ಧಿಯಾಗದೇ ಇರಲು ಕಾರಣಗಳೇನು;	ಬಂದಿದೆ. ರಾಜ್ಯದ ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿಪಡಿಸಿ ಸುಸ್ಥಿತಿಯಲ್ಲಿಡಲು ಈ ಕೆಳಕಂಡ ಯೋಜನೆಗಳಾದ • ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ, • ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ, • 5054-ಲಮ್‌ಸಮ್, • 3054-ಸಿ.ಎಂ.ಜಿ.ಎಸ್.ವೈ. ಮತ್ತು • 3054-ನಿರ್ವಹಣೆ ಹಾಗೂ • ನಬಾರ್ಡ್ ನೆರವುಗಳಡಿ ಆಯವ್ಯಯದಲ್ಲಿ ಹಂಚಿಕೆಯಾಗಿ ಲಭ್ಯಗೊಳಿಸುವ ಅನುದಾನದ ಮಿತಿಯಲ್ಲಿ ಹಂತಹಂತವಾಗಿ ಕ್ರಮ ಕೈಗೊಂಡು ಸಮರ್ಪಕ ರಸ್ತೆ ಸೇತುವೆ ಸಂಪರ್ಕವನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಅಲ್ಲದೆ, • ಗ್ರಾಮೀಣ ರಸ್ತೆಗಳ ವಾರ್ಷಿಕ ನಿರ್ವಹಣೆಯನ್ನು ಲೆ.ಶೀ.3054, ನಮ್ಮ ಗ್ರಾಮ ನಮ್ಮ ರಸ್ತೆ ಮತ್ತು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಲ್ಲಿ ಆಯಾ ವರ್ಷದಲ್ಲಿ ಲಭ್ಯಗೊಳ್ಳುವ ಅನುದಾನದ ಮಿತಿಯಲ್ಲಿ ಕೈಗೊಳ್ಳಲಾಗುತ್ತಿದೆ.
ಆ.	ಗ್ರಾಮೀಣ ರಸ್ತೆಗಳ ನಿರ್ವಹಣೆ ಮತ್ತು ಅಭಿವೃದ್ಧಿಗಾಗಿ ಹೆಗ್ಗಡದೇವನಕೋಟೆ ವಿಧಾನಸಭಾ ಕ್ಷೇತ್ರಕ್ಕೆ 2020-21ನೇ ಸಾಲಿನಲ್ಲಿ ಮಂಜೂರಾದ ಅನುದಾನವೆಷ್ಟು; (ವಿವರ ನೀಡುವುದು)	2020-21ನೇ ಸಾಲಿನಲ್ಲಿ ಹೆಗ್ಗಡದೇವನಕೋಟೆ ವಿಧಾನಸಭಾ ಕ್ಷೇತ್ರಕ್ಕೆ ಈ ಕೆಳಗಿನಂತೆ ಅನುದಾನ ಹಂಚಿಕೆ ಮಾಡಿ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.

(ರೂ. ಲಕ್ಷಗಳಲ್ಲಿ)

ಕ್ರ.ಸಂ.	ಲೆ.ಶೀ./ಕಾರ್ಯಕ್ರಮ	ಮಂಜೂರಾತಿ	ಬಿಡುಗಡೆ
01	3054 – ಸಿಎಂಜಿಎಸ್‌ವೈ ನಿರ್ವಹಣೆ	66.34	26.535
02	5054- ಪಿಎಂಜಿಎಸ್‌ವೈ ರಸ್ತೆಗಳ ಅಭಿವೃದ್ಧಿ	2412.19	0.00

ಭಾಗಶ: ಬಂದಿರುತ್ತದೆ

ಇ.	ಗ್ರಾಮೀಣ ಪ್ರದೇಶಗಳಿಂದ ಪ್ರಮುಖ ಸಂಪರ್ಕ ರಸ್ತೆಗಳನ್ನು ಸಮರ್ಪಕವಾಗಿ ಜಿಲ್ಲಾ ಗ್ರಾಮೀಣ ರಸ್ತೆಯ ನಕ್ಷೆಗಳಲ್ಲಿ ಗುರುತಿಸದೇ ಇರುವ ಕಾರಣದಿಂದಾಗಿ, ಸದರಿ ರಸ್ತೆಗಳು ಅಭಿವೃದ್ಧಿಯಾಗದಿರುವ ಕಾರಣ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	• ಗ್ರಾಮೀಣ ಪ್ರದೇಶಗಳ ಪ್ರಮುಖ ಸಂಪರ್ಕ ರಸ್ತೆಗಳನ್ನು ಜಿಲ್ಲಾ ಗ್ರಾಮೀಣ ರಸ್ತೆ ಯೋಜನೆಯಡಿ (ಡಿ.ಆರ್.ಆರ್.ಪಿ) ಗುರುತಿಸಲಾಗಿರುತ್ತದೆ. • ರೈತರ ಜಮೀನುಗಳಿಗೆ ಹೋಗುವ ರಸ್ತೆಗಳನ್ನು ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಯಡಿಯಲ್ಲಿ, ಕಾಡಾ ಯೋಜನೆ ಹಾಗೂ ಗ್ರಾಮ ಪಂಚಾಯತ್ ಅನುದಾನದಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ.
ಈ.	ಹಳ್ಳಿಯಿಂದ ಹಳ್ಳಿಗಳಿಗೆ ಸಂಪರ್ಕ ಕಲ್ಪಿಸುವ ಗ್ರಾಮೀಣ ರಸ್ತೆಗಳನ್ನು ನಕ್ಷೆಗಳಲ್ಲಿ ಗುರುತಿಸಲಾಗಿದೆಯೇ; ಹಾಗಿದ್ದಲ್ಲಿ, ಹೆಗ್ಗಡದೇವನಕೋಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹೊಸದಾಗಿ ಎಷ್ಟು ಗ್ರಾಮೀಣ ಸಂಪರ್ಕ ರಸ್ತೆಗಳನ್ನು ನಕ್ಷೆಗಳಲ್ಲಿ ಗುರುತಿಸಲಾಗಿದೆ; (ಪೂರ್ಣ ವಿವರ ನೀಡುವುದು)	ಹಳ್ಳಿಯಿಂದ ಹಳ್ಳಿಗಳಿಗೆ ಸಂಪರ್ಕ ಕಲ್ಪಿಸುವ ಗ್ರಾಮೀಣ ರಸ್ತೆಗಳನ್ನು ಜಿಲ್ಲಾ ಗ್ರಾಮೀಣ ರಸ್ತೆ ಯೋಜನೆಯಡಿ (ಡಿ.ಆರ್.ಆರ್.ಪಿ) ನಕ್ಷೆಗಳಲ್ಲಿ ಗುರುತಿಸಲಾಗಿದೆ. ಹೆಗ್ಗಡದೇವನಕೋಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹೊಸದಾಗಿ 23 ಗ್ರಾಮೀಣ ಸಂಪರ್ಕ ರಸ್ತೆಗಳನ್ನು ನಕ್ಷೆಗಳಲ್ಲಿ ಗುರುತಿಸಲಾಗಿದ್ದು, ವಿವರಗಳನ್ನು ಅನುಬಂಧದಲ್ಲಿ ನೀಡಿದೆ.
ಉ.	ಅವುಗಳ ಅಭಿವೃದ್ಧಿಗೆ ಪ್ರಸಕ್ತ ಸಾಲಿನಲ್ಲಿ ಸರ್ಕಾರದ ಕ್ರಮವೇನು? (ವಿವರ ನೀಡುವುದು)	• ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ 29.926 ಕಿ.ಮೀ. ಉದ್ದದ ರಸ್ತೆಯನ್ನು ರೂ.2412.19 ಲಕ್ಷಗಳ ಮೊತ್ತದ ಅನುದಾನದಡಿ ಮತ್ತು • ವಿಶೇಷ ಅಭಿವೃದ್ಧಿ ಯೋಜನೆಯಡಿ 1.265 ಕಿ.ಮೀ. ಉದ್ದದ ರಸ್ತೆಯನ್ನು ರೂ.65.48 ಲಕ್ಷಗಳ ಅನುದಾನದಡಿಯಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ.

ಕಡತ ಸಂಖ್ಯೆ: ಗ್ರಾಅಪ: ಅಧಿ-15/20:ಆರ್‌ಆರ್‌ಸಿ:2020

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

<u>ಕರ್ನಾಟಕ ಸರ್ಕಾರ</u>

ಸಂಖ್ಯೆ:ಗ್ರಾಅಪ:01/1:ಆರ್‌ಆರ್‌ಸಿ:2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,ಬೆಂಗಳೂರು
ದಿನಾಂಕ:02.02.2021.

165
GIS
03/2/21

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ ಸಚಿವಾಲಯ,
ವಿಧಾನ ಸೌಧ, ಬೆಂಗಳೂರು.

ಶ್ರೀ ಸುಕುಮಾರ ಶೆಟ್ಟಿ. ಬಿ.ಎಂ.
(ಬೈಂದೂರು)

ಮಾನ್ಯರೇ,

ವಿಷಯ: ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 713 ಗೆ ಉತ್ತರವನ್ನು ಒದಗಿಸುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 713 ಗೆ ಉತ್ತರವನ್ನು ಸಿದ್ಧಪಡಿಸಿ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

(ರಮೇಶ್ ಪಿ.ಓ)
ಉಪ ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತ್ತಿಲ್ಲದಪ್ರಶ್ನೆ ಸಂಖ್ಯೆ	713
ಸದಸ್ಯರ ಹೆಸರು	ಶ್ರೀ ಸುಕುಮಾರ್ ಶೆಟ್ಟಿ ಬಿ.ಎಂ. (ಬೈಂದೂರು)
ಉತ್ತರಿಸಬೇಕಾದ ದಿನಾಂಕ	03.02.2021

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	ರಾಜ್ಯದಲ್ಲಿ ಪ್ರವಾಹದಿಂದ ಹಾನಿಯಾದ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ 2020-21ನೇ ಸಾಲಿನಲ್ಲಿ ಒದಗಿಸಿದ ಅನುದಾನವೆಷ್ಟು? (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)	ಪ್ರಸ್ತುತ ಸಾಲಿನಲ್ಲಿ ಪ್ರವಾಹದಿಂದ ಹಾನಿಗೊಳಗಾದ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ರೂ. 1,06,007.41 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಪ್ರಸ್ತಾವನೆಯನ್ನು ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ವರದಿ ಮಾಡಿದೆ. ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ)ಯು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ವ್ಯಾಪ್ತಿಯ ಗ್ರಾಮೀಣ ರಸ್ತೆಗಳು ಮತ್ತು ಸೇತುವೆಗಳ ತುರ್ತು ದುರಸ್ತಿಗೆ ಎರಡು ಕಂತುಗಳಲ್ಲಿ ರೂ. 34844.84 ಲಕ್ಷಗಳ ಅನುದಾನವನ್ನು ಪ್ರವಾಹ ಪೀಡಿತ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಿರುತ್ತದೆ. (ವಿವರಗಳನ್ನು ಅನುಬಂಧ – 1 ರಲ್ಲಿ ಲಗತ್ತಿಸಿದೆ.)
ಆ.	ಪ್ರವಾಹ ಹಾನಿಯಡಿ ಬಿಡುಗಡೆಯಾದ ಅನುದಾನ ಬಳಕೆಗೆ ಇರುವ ಮಾರ್ಗಸೂಚಿಗಳನ್ನು ಒದಗಿಸುವುದು;	ಪ್ರವಾಹ ಹಾನಿಯಡಿ ಬಿಡುಗಡೆಯಾದ ಅನುದಾನವನ್ನು ಕೇಂದ್ರ ಗೃಹ ಮಂತ್ರಾಲಯರವರ ಪತ್ರ ಸಂ: 32-7/2014-ಎನ್‌ಡಿಎಂ-ಐ ದಿನಾಂಕ: 08.04.2015 ರ ಪತ್ರದಲ್ಲಿ ನೀಡಿರುವ ಮಾರ್ಗಸೂಚಿಗಳಂತೆ ಬಳಕೆ ಮಾಡಬೇಕಾಗಿರುತ್ತದೆ. (ವಿವರಗಳನ್ನು ಅನುಬಂಧ-2 ರಲ್ಲಿ ಲಗತ್ತಿಸಿದೆ)
ಇ.	ಪ್ರವಾಹ ಹಾನಿ ಅನುದಾನ ಬಳಕೆಗೆ ಇರುವ ಮಾರ್ಗಸೂಚಿ ಪ್ರಕಾರ ರಸ್ತೆಗಳ ಅಭಿವೃದ್ಧಿಗೆ ಕಿ.ಮೀ.ಗಳಿಗೆ ನಿಗದಿಪಡಿಸಿದ ಅನುದಾನದಲ್ಲಿ ರಸ್ತೆಗಳನ್ನು ಸಮರ್ಪಕ ದುರಸ್ತಿ ಮಾಡಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ. ಕೇಂದ್ರ ಸರ್ಕಾರ ವಿಪತ್ತು ನಿರ್ವಹಣೆಯಡಿ ಹೊರಡಿಸಿರುವ ಮಾರ್ಗಸೂಚಿಯ ಪ್ರಕಾರ ಪ್ರತಿ ಕಿ.ಮೀ.ಗೆ ರೂ. 0.60 ಲಕ್ಷಗಳನ್ನು ನಿಗಧಿಪಡಿಸಿದೆ.

ಈ	ಬೈಂದೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ಭಾಗವಾಗಿದ್ದು, ಈ ಬಾರಿಯ ಮಳೆಯಿಂದ ಹೆಚ್ಚಿನ ರಸ್ತೆಗಳು ಸಂಪೂರ್ಣ ಹಾಳಾಗಿದ್ದು, ಪ್ರವಾಹ ಹಾನಿಯಡಿ ಹೆಚ್ಚಿನ ಅನುದಾನ ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?	ಉಡುಪಿ ಜಿಲ್ಲೆಯ ವ್ಯಾಪ್ತಿಯಲ್ಲಿ ಈ ಬಾರಿಯ ಮಳೆಯಿಂದ ಹಾನಿಗೊಳಗಾದ ಒಟ್ಟು 1,351.29 ಕಿಮೀ ಉದ್ದದ ರಸ್ತೆಗಳನ್ನು ರೂ. 6,533.00 ಲಕ್ಷಗಳಲ್ಲಿ ಅಭಿವೃದ್ಧಿ ಪಡಿಸುವ ಪ್ರಸ್ತಾವನೆಗೆ ಅನುದಾನ ಒದಗಿಸುವಂತೆ ಕೋರಿ ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಗೆ ಪ್ರಸ್ತಾವನೆ ಸಲ್ಲಿಸಿದೆ. ಇದರಲ್ಲಿ • ಬೈಂದೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 103.2 ಕಿಮೀ ಉದ್ದದ ರಸ್ತೆಗಳನ್ನು ರೂ. 399.00 ಲಕ್ಷಗಳು ಒಳಗೊಂಡಿದೆ • ಪ್ರಸಕ್ತ ಸಾಲಿನಲ್ಲಿ ಕಂದಾಯ ಇಲಾಖೆಯು ಉಡುಪಿ ಜಿಲ್ಲೆಯ ಗ್ರಾಮೀಣ ರಸ್ತೆ ಮತ್ತು ಸೇತುವೆ ಕಾಮಗಾರಿಗಳ ದುರಸ್ತಿಗೆ ರೂ. 1,742.24 ಲಕ್ಷಗಳನ್ನು ಜಿಲ್ಲಾಧಿಕಾರಿಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. • ಉಡುಪಿ ಜಿಲ್ಲಾಧಿಕಾರಿಗಳು ಗ್ರಾಮೀಣ ರಸ್ತೆಗಳ ಕಾಮಗಾರಿಗಳ ಆದ್ಯತೆ ಮತ್ತು ಅಗತ್ಯತೆಗನುಗುಣವಾಗಿ ಅನುದಾನವನ್ನು ಬಿಡುಗಡೆ ಮಾಡಬೇಕಿದೆ.

ಕಡತ ಸಂಖ್ಯೆ: ಗ್ರಾಅಪ:ಅಧಿ- :ಆರ್‌ಆರ್‌ಸಿ:2020

(ಕೆ.ಎಸ್.ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪಂರಾ 43 ಜಿಪಸ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:03-02-2021.

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

ಕಾರ್ಯದರ್ಶಿಗಳು,
ವಿಧಾನಸಭೆ, ವಿಧಾನಸೌಧ,
ಬೆಂಗಳೂರು.

142
3/2/21

ಮಾನ್ಯರೆ,

ವಿಷಯ: ಮಾನ್ಯ ಕರ್ನಾಟಕ ವಿಧಾನ ಸಭೆಯ ಸದಸ್ಯರಾದ ಶ್ರೀ ಶಿವಾನಂದ ಎಸ್. ಪಾಟೀಲ್ (ಬಸವನಬಾಗೇವಾಡಿ)ರವರು ಕೇಳಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ.555ಕ್ಕೆ ಉತ್ತರ ಸಲ್ಲಿಸುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ಶಿವಾನಂದ ಎಸ್. ಪಾಟೀಲ್ (ಬಸವನಬಾಗೇವಾಡಿ)ರವರು ಕೇಳಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ.555ಕ್ಕೆ ಉತ್ತರದ **25** ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ತಮಗೆ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ

B. Naveenkumar 03/02/21
(ಬಿ. ನವೀನ್ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

03/02/21

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು,
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಅಧೀನ ಕಾರ್ಯದರ್ಶಿ(ಸಮನ್ವಯ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಕರ್ನಾಟಕ ವಿಧಾನ ಸಭೆ

15ನೇ ವಿಧಾನಸಭೆ

9ನೇ ಅಧಿವೇಶನ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	555
ವಿಧಾನ ಸಭೆಯ ಸದಸ್ಯರ ಹೆಸರು	:	ಶ್ರೀ ಶಿವಾನಂದ ಎಸ್. ಪಾಟೀಲ್ (ಬಸವನಬಾಗೇವಾಡಿ)
ಉತ್ತರಿಸುವ ದಿನಾಂಕ	:	03-02-2021
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರ
(ಅ)	ಬಸವನ ಬಾಗೇವಾಡಿ ತಾಲ್ಲೂಕು ಪಂಚಾಯತಿ ಕಟ್ಟಡ ಮತ್ತು ನೌಕರರ ವಸತಿ ಗೃಹಗಳನ್ನು ನಿರ್ಮಿಸಲು ಹಾಗೂ ನಿಡಗುಂದಿ ಮತ್ತು ಕೋಲ್ಹಾರ ತಾಲ್ಲೂಕು ಪಂಚಾಯತಿಗಳ ಹೊಸ ಕಟ್ಟಡ ನಿರ್ಮಿಸಲು ಇದೂವರೆಗೂ ಕೈಗೊಂಡಿರುವ ಕ್ರಮಗಳೇನು;	ಬಸವನ ಬಾಗೇವಾಡಿ ತಾಲ್ಲೂಕು ಪಂಚಾಯತಿ ಕಟ್ಟಡವು ಶಿಥಿಲಾವಸ್ಥೆಯಲ್ಲಿದ್ದು, ಸದರಿ ಕಟ್ಟಡದ ನಿರ್ಮಾಣದ ಕುರಿತು ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ. ನಿಡಗುಂದಿ ತಾಲ್ಲೂಕಿನ ದೇವಲಾಪುರ ಗ್ರಾಮದ ಸರ್ವೆ ನಂ.47ರಲ್ಲಿ 2 ಎಕರೆ ಜಮೀನನ್ನು ತಾಲ್ಲೂಕು ಪಂಚಾಯತಿ ಹೆಸರಿಗೆ ಮಾಡಲು ಜಿಲ್ಲಾಧಿಕಾರಿ, ವಿಜಯಪುರ ಹಾಗೂ ತಹಶೀಲ್ದಾರರು ಇವರಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಮತ್ತು ಕೊಲ್ಹಾರ ತಾಲ್ಲೂಕು ಪಂಚಾಯತಿಯ ಹೊಸ ಕಟ್ಟಡ ನಿರ್ಮಿಸಲು ಪುನರ್ವಸತಿ ಅಧಿಕಾರಿಗಳು, ಕೃಷ್ಣಾ ಮೇಲ್ದಂಡೆ ಯೋಜನೆ ಇವರಿಗೆ 3 ಎಕರೆ ನಿವೇಶನ ನೀಡಲು ದಿನಾಂಕ:14-02-2020ರಂದು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಎಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ವಿಜಯಪುರ ಇವರು ತಿಳಿಸಿರುತ್ತಾರೆ.
(ಆ)	ನಿಡಗುಂದಿ ಮತ್ತು ಕೊಲ್ಹಾರ ತಾಲ್ಲೂಕು ಪಂಚಾಯತಿಗಳ ಹೊಸ ಕಟ್ಟಡ ನಿರ್ಮಿಸಲು ಗುರುತಿಸಿರುವ ನಿವೇಶನ ಯಾವುದು;	ಇನ್ನೂ ನಿವೇಶನವನ್ನು ಗುರುತಿಸಿರುವುದಿಲ್ಲವೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ವಿಜಯಪುರ ಇವರು ತಿಳಿಸಿರುತ್ತಾರೆ.
(ಇ)	ಹಾಗಿದ್ದಲ್ಲಿ ತಾಲ್ಲೂಕು ಪಂಚಾಯತಿಗಳ ಆಡಳಿತದ ಅನುಕೂಲಕ್ಕಾಗಿ ಹೊಸ ಕಟ್ಟಡ ಮತ್ತು ನೌಕರರ ವಸತಿ ಗೃಹಗಳನ್ನು ಯಾವ ನಿರ್ದಿಷ್ಟ ಕಾಲಮಿತಿಯಲ್ಲಿ ನಿರ್ಮಿಸಲಾಗುವುದು?	ನಿವೇಶನ ಗುರುತಿಸಿ, ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಪರಿಶೀಲಿಸಲಾಗುವುದು.

ಸಂಖ್ಯೆ:ಗ್ರಾಅಪಂರಾ 43 ಜಿಪಸ 2021

(ಕೆ.ಎಸ್.ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/64/ಗ್ರಾಪಂಅ/2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:03-02-2021.

ಇಂದ,

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

ಇವರಿಗೆ,

ಕಾರ್ಯದರ್ಶಿಗಳು,
ವಿಧಾನ ಸಭೆ,
ವಿಧಾನ ಸೌಧ,
ಬೆಂಗಳೂರು.

61 172 3/2/21

ಮಾನ್ಯರೆ,

ವಿಷಯ: ಕರ್ನಾಟಕ ವಿಧಾನ ಸಭೆಯ ಸದಸ್ಯರಾದ ಶ್ರೀ ವೆಂಕಟರೆಡ್ಡಿ ಮುದ್ನಾಳ್ (ಯಾದಗಿರಿ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 768 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ ರವರ ಪತ್ರ ಸಂಖ್ಯೆ:ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.768/2021, ದಿನಾಂಕ:23.01.2021.

*****

ಕರ್ನಾಟಕ ವಿಧಾನ ಸಭೆಯ ಸದಸ್ಯರಾದ ಶ್ರೀ ವೆಂಕಟರೆಡ್ಡಿ ಮುದ್ನಾಳ್ (ಯಾದಗಿರಿ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 768 ಕ್ಕೆ ಸಂಬಂಧಿಸಿದಂತೆ ಉತ್ತರದ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Narayana 3/2/2021

(ಡಿ.ಜಿ. ನಾರಾಯಣ)
ಪೀಠಾಧಿಕಾರಿ (ಗ್ರಾಮ ಪಂಚಾಯಿತಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ:

ಸರ್ಕಾರದ ಅಧೀನ ಕಾರ್ಯದರ್ಶಿ (ಸಮನ್ವಯ) ಗ್ರಾಅಪ ಇಲಾಖೆ. (5 ಪ್ರತಿಗಳು)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 768
ಸದಸ್ಯರ ಹೆಸರು : ಶ್ರೀ ವೆಂಕಟರೆಡ್ಡಿ ಮುದ್ನಾಳ್ (ಯಾದಗಿರಿ)
ಉತ್ತರಿಸುವ ದಿನಾಂಕ : 03-02-2021.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಯಾದಗಿರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಶಹಾಪುರ ತಾಲ್ಲೂಕಿನ ಗ್ರಾಮ ಪಂಚಾಯಿತಿಗಳಲ್ಲಿ ವಿದ್ಯುತ್ ಬಿಲ್ ಪಾವತಿ ಮಾಡದೆ ಇರುವುದರಿಂದ ಕುಡಿಯುವ ನೀರಿನ ಪಂಪ್‌ಸೆಟ್‌ಗೆ ವಿದ್ಯುತ್ ಸಂಪರ್ಕ ಕಡಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕುಡಿಯುವ ನೀರಿನ ಸಮಸ್ಯೆ ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಯಾದಗಿರಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಶಹಾಪೂರ ತಾಲೂಕಿನ ಎಲ್ಲಾ ಗ್ರಾಮ ಪಂಚಾಯತಿಗಳಿಂದ ವಿದ್ಯುತ್ ಬಿಲ್ ಪಾವತಿಸಲಾಗಿರುತ್ತದೆ. ಕುಡಿಯುವ ನೀರಿನ ಪಂಪ್‌ಸೆಟ್ ಸೇರಿದಂತೆ ಯಾವುದೇ ಜಲ ಮೂಲದ ವಿದ್ಯುತ್ ಸಂಪರ್ಕ ಕಡಿತಗೊಳಿಸಿರುವುದಿಲ್ಲ.
(ಆ)	15ನೇ ಹಣಕಾಸಿನ ಸಾಲಿನಲ್ಲಿ ಅನುದಾನ ಲಭ್ಯವಿದ್ದರೂ ಸಹ ಪಿಡಿಓ ಗಳು ವಿದ್ಯುತ್ ಬಿಲ್ ಪಾವತಿ ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಯಾದಗಿರಿ ಜಿಲ್ಲೆಯಲ್ಲಿ ಇಂತಹ ಪ್ರಕರಣಗಳು ವರದಿಯಾಗಿರುವುದಿಲ್ಲ.
(ಇ)	ಬಂದಿದ್ದಲ್ಲಿ ಇಂತಹ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು?	ಅನ್ವಯಿಸುವುದಿಲ್ಲ.

ಸಂ. ಗ್ರಾಅಪ 64 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	768
ಸದಸ್ಯರ ಹೆಸರು	:	ಶ್ರೀ ವೆಂಕಟರೆಡ್ಡಿ ಮುದ್ನಾಳ್ (ಯಾದಗಿರಿ)
ಉತ್ತರಿಸುವ ದಿನಾಂಕ	:	03-02-2021.
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರಸಂ	ಪ್ರಶ್ನೆ	ಉತ್ತರ
(ಅ)	ಯಾದಗಿರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಶಹಾಪುರ ತಾಲ್ಲೂಕಿನ ಗ್ರಾಮ ಪಂಚಾಯಿತಿಗಳಲ್ಲಿ ವಿದ್ಯುತ್ ಬಿಲ್ ಪಾವತಿ ಮಾಡದೆ ಇರುವುದರಿಂದ ಕುಡಿಯುವ ನೀರಿನ ಪಂಪ್‌ಸೆಟ್‌ಗೆ ವಿದ್ಯುತ್ ಸಂಪರ್ಕ ಕಡಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕುಡಿಯುವ ನೀರಿನ ಸಮಸ್ಯೆ ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಯಾದಗಿರಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಶಹಾಪೂರ ತಾಲೂಕಿನ ಎಲ್ಲಾ ಗ್ರಾಮ ಪಂಚಾಯತಿಗಳಿಂದ ವಿದ್ಯುತ್ ಬಿಲ್ ಪಾವತಿಸಲಾಗಿರುತ್ತದೆ. ಕುಡಿಯುವ ನೀರಿನ ಪಂಪ್‌ಸೆಟ್ ಸೇರಿದಂತೆ ಯಾವುದೇ ಜಲ ಮೂಲದ ವಿದ್ಯುತ್ ಸಂಪರ್ಕ ಕಡಿತಗೊಳಿಸಿರುವುದಿಲ್ಲ.
(ಆ)	15ನೇ ಹಣಕಾಸಿನ ಸಾಲಿನಲ್ಲಿ ಅನುದಾನ ಲಭ್ಯವಿದ್ದರೂ ಸಹ ಪಿಡಿಓ ಗಳು ವಿದ್ಯುತ್ ಬಿಲ್ ಪಾವತಿ ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಯಾದಗಿರಿ ಜಿಲ್ಲೆಯಲ್ಲಿ ಇಂತಹ ಪ್ರಕರಣಗಳು ವರದಿಯಾಗಿರುವುದಿಲ್ಲ.
(ಇ)	ಬಂದಿದ್ದಲ್ಲಿ ಇಂತಹ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು?	ಅನ್ವಯಿಸುವುದಿಲ್ಲ.

ಸಂ. ಗ್ರಾಅಪ 64 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.
ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: MWD 34 LMQ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 02-02-2021.

ಇವರಿಂದ,

ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

ಇವರಿಗೆ,

ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ
ಬೆಂಗಳೂರು.

415 145 3/2/21

ಮಾನ್ಯರೇ,

ವಿಷಯ : ಶ್ರೀ ಶಿವಾನಂದ ಎಸ್. ಪಾಟೀಲ್ (ಬಸವನಬಾಗೇವಾಡಿ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 558 ಉತ್ತರಿಸುವ ಬಗ್ಗೆ.

*****

ಶ್ರೀ ಶಿವಾನಂದ ಎಸ್. ಪಾಟೀಲ್ (ಬಸವನಬಾಗೇವಾಡಿ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 558 ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಗೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ

ತಮ್ಮ ವಿಶ್ವಾಸಿ,

(ಎಸ್.ಎಜಾಸ್ ಪಾಷ)
ಶಾಖಾಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	558
ಸದಸ್ಯರ ಹೆಸರು	:	ಶ್ರೀ ಶಿವಾನಂದ ಎಸ್.ಪಾಟೀಲ್(ಬಸವನಬಾಗೇವಾಡಿ)
ಉತ್ತರಿಸಬೇಕಾದ ದಿನಾಂಕ	:	03-02-2021.
ಉತ್ತರಿಸುವ ಸಚಿವರು	:	ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ 2019-20 ಮತ್ತು 2020-21ನೇ ಸಾಲಿನಲ್ಲಿ ಮೂಲಭೂತ ಸೌಲಭ್ಯಗಳಿಗಾಗಿ ಒದಗಿಸಲಾಗಿರುವ ಅನುದಾನ ಎಷ್ಟು;	ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ 2019-20 ನೇ ಸಾಲಿನಲ್ಲಿ ರೂ.400.00 ಕೋಟಿಗಳ ಅನುದಾನವನ್ನು ಮೂಲಭೂತ ಸೌಲಭ್ಯಗಳಿಗಾಗಿ ಒದಗಿಸಲಾಗಿದೆ ಹಾಗೂ 2020-21ನೇ ಸಾಲಿನ ಆಯವ್ಯಯದಲ್ಲಿ ಯಾವುದೇ ಅನುದಾನವನ್ನು ಒದಗಿಸಿರುವುದಿಲ್ಲ.
ಆ)	ಸದರಿ ಅನುದಾನದಲ್ಲಿ ಕೈಗೊಳ್ಳಲಾಗಿರುವ ಮೂಲಭೂತ ಸೌಲಭ್ಯಗಳು ಯಾವುವು; (ವರ್ಷವಾರು ಮತ್ತು ಮತಕ್ಷೇತ್ರವಾರು ಮಾಹಿತಿ ಒದಗಿಸುವುದು)	ಸದರಿ ಅನುದಾನದಲ್ಲಿ ಕೈಗೊಳ್ಳಲಾಗಿರುವ ಮೂಲಭೂತ ಸೌಲಭ್ಯಗಳು ಈ ಕೆಳಕಂಡಂತಿರುತ್ತದೆ. 1. ರಸ್ತೆ ಮತ್ತು ಚರಂಡಿ/ಒಳ ಚರಂಡಿ ನಿರ್ವಹಣೆ. 2.ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು. 3.ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು. 4.ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆ ಸ್ಥಳೀಯ ಸಂಸ್ಥೆಗಳ ಸುಪರ್ದಿಗೆ ನೀಡುವುದು.) 2019-20ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಕಾಮಗಾರಿಗಳಿಗೆ ಸರ್ಕಾರದಿಂದ ಮಂಜೂರಾಗಿರುವ ಅನುದಾನದ ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ. ಹಾಗೂ 2020-21ನೇ ಸಾಲಿನಲ್ಲಿ ಯಾವುದೇ ಮತಕ್ಷೇತ್ರಕ್ಕೆ ಅನುದಾನವನ್ನು ನೀಡಿರುವುದಿಲ್ಲ.
ಇ)	ಬಸವನ ಬಾಗೇವಾಡಿ ವಿಧಾನಸಭಾ ಮತಕ್ಷೇತ್ರ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು 2019-20 ಮತ್ತು 2020-21ನೇ ಸಾಲಿನಲ್ಲಿ ಒದಗಿಸಿರುವ ಅನುದಾನ ಮತ್ತು ಸದರಿ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು; (ಗ್ರಾಮವಾರು ಮಾಹಿತಿ ಒದಗಿಸುವುದು)	ಬಸವನ ಬಾಗೇವಾಡಿ ವಿಧಾನಸಭಾ ಮತಕ್ಷೇತ್ರದ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು 2019-20ನೇ ಸಾಲಿನಲ್ಲಿ ರೂ.200.00 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗಿದ್ದು, ಜುಲೈ-2019ರ ಮಾಹೆಯಲ್ಲಿನ ಎಲ್ಲಾ ಹೊಸ ಕಾಮಗಾರಿಗಳ ಆದೇಶವನ್ನು ಸರ್ಕಾರದಿಂದ ತಡೆಹಿಡಿಯಲಾಗಿದೆ. ಮುಂದುವರೆದು ರೂ.102.26 ಕೋಟಿಗಳ ಅನುದಾನವನ್ನು One time settlement ಮಂಜೂರು ಮಾಡಲು ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿತ್ತು. ಕೋವಿಡ್-19 ರ ಹಿನ್ನೆಲೆಯಲ್ಲಿ ಹೆಚ್ಚುವರಿ ಅನುದಾನ ಬಿಡುಗಡೆ ಮಾಡಲು ಸಾಧ್ಯವಿರುವುದಿಲ್ಲವೆಂದು ತಿಳಿಸಿರುತ್ತಾರೆ. 2020-21ನೇ ಸಾಲಿನ ಆಯವ್ಯಯದಲ್ಲಿ ಕಾಲೋನಿಗಳ ಅಭಿವೃದ್ಧಿಗೆ ಯಾವುದೇ ಅನುದಾನವನ್ನು ಒದಗಿಸಿರುವುದಿಲ್ಲ.

ಸಂಖ್ಯೆ: MWD 34 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ಮಮಇ 33 ಪಿಹೆಚ್‌ಪಿ 2021

ಕರ್ನಾಟಕ ಸರ್ಕಾರ ಸಚಿವಾಲಯ
3ನೇ ಗೇಟ್, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:03.02.2021

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬಹುಮಹಡಿಗಳ ಕಟ್ಟಡ, ಬೆಂಗಳೂರು–1.

4/6 71 3/2/21

ಇವರಿಗೆ;
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ,
ಬೆಂಗಳೂರು–560 001.

ಮಾನ್ಯರೆ,

ವಿಷಯ: ಶ್ರೀ ಖಾದರ್ ಯು. ಟಿ., ಮಾನ್ಯ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:688ಕ್ಕೆ ಉತ್ತರ ಸಲ್ಲಿಸುವ ಬಗ್ಗೆ.

ಉಲ್ಲೇಖ: ಕರ್ನಾಟಕ ವಿಧಾನ ಸಭೆ ಸಚಿವಾಲಯದ ಪತ್ರ ಸಂಖ್ಯೆ:ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.688/2021, ದಿ:23.01.2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ಖಾದರ್ ಯು. ಟಿ., ಮಾನ್ಯ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:688ಕ್ಕೆ ಸಂಬಂಧಿಸಿದಂತೆ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿ ಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

G. H. Sarojamma
(ಜಿ. ಹೆಚ್. ಸರೋಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ – 2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	688
ಮಾನ್ಯ ವಿಧಾನಸಭೆ ಸದಸ್ಯರ ಹೆಸರು	:	ಶ್ರೀ ಖಾದರ್ ಯುಟಿ (ಮಂಗಳೂರು)
ಉತ್ತರಿಸಬೇಕಾದ ದಿನಾಂಕ	:	03.02.2021
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿರುವ 25 ವರ್ಷ ವಯಸ್ಸಿನ ಬುದ್ಧಿಮಾಂದ್ಯ / ಮೆದುಳಿನ ಪಾರ್ಶ್ವ/ ಬಹುವಿಧ ಅಂಗಾಂಗಳ ವೈಫಲ್ಯದ ವಿಕಲಚೇತನರ ಸಂಖ್ಯೆಗಳೆಷ್ಟು? (ಜಿಲ್ಲಾವಾರು ವಿವರಗಳನ್ನು ಒದಗಿಸುವುದು)	2011ರ ಜನಗಣತಿಯ ಪ್ರಕಾರ ರಾಜ್ಯದಲ್ಲಿ ಒಟ್ಟು 214900 ಮಂದಿ 25 ವರ್ಷ ವಯಸ್ಸಿನ ಬುದ್ಧಿಮಾಂದ್ಯ / ಮೆದುಳಿನ ಪಾರ್ಶ್ವ/ ಬಹುವಿಧ ಅಂಗಾಂಗಳ ವೈಫಲ್ಯದ ವಿಕಲಚೇತನರಿರುತ್ತಾರೆ. ಜಿಲ್ಲಾವಾರು ವಿವರಗಳನ್ನು ಅನುಬಂಧ 1 ರಲ್ಲಿ ಲಗತ್ತಿಸಿದೆ.
ಆ)	2014-15ನೇ ಇಸವಿಯ ನಂತರ ಬುದ್ಧಿಮಾಂದ್ಯ / ವಿಕಲಚೇತನರ ಸಿಬ್ಬಂದಿಗಳಿಗೆ ಶಿಶು ಕೇಂದ್ರಿಕೃತ ಶಿಕ್ಷಣ ಯೋಜನೆಯಡಿ ಗೌರವಧನ ಹೆಚ್ಚು ಮಾಡುವ ಉದ್ದೇಶ ಸರ್ಕಾರ ಹೊಂದಿದೆಯೇ; (ವಿವರ ನೀಡುವುದು)	ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖಾವತಿಯಿಂದ ಅಂಗವಿಕಲ ಮಕ್ಕಳ ಕೇಂದ್ರಿಕೃತ ವಿಶೇಷ ಶೈಕ್ಷಣಿಕ ರಾಜ್ಯ ಸಹಾಯಧನ ಯೋಜನೆಗೆ ದಿನಾಂಕ:14.12.2010 ರಂದು ಆದೇಶವನ್ನು ಹೊರಡಿಸಲಾಗಿರುತ್ತದೆ. 2014-15ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಅಂಗವಿಕಲರ ಮಕ್ಕಳ ಕೇಂದ್ರಿಕೃತ ವಿಶೇಷ ಶೈಕ್ಷಣಿಕ ಯೋಜನೆಯಡಿ ವಿಶೇಷ ಶಾಲೆಗಳಿಗೆ ನೀಡುತ್ತಿರುವ ಅನುದಾನವನ್ನು ಸರ್ಕಾರದ ಆದೇಶ ಸಂಖ್ಯೆ:ಮಮಇ 107 ಪಿಹೆಚ್‌ಪಿ 2014 ದಿನಾಂಕ:23.7.2014ರಂದು ದ್ವಿಗುಣಗೊಳಿಸಿ ಮಾರ್ಗಸೂಚಿಯನ್ನು ಹೊರಡಿಸಲಾಗಿರುತ್ತದೆ. ಪ್ರಸ್ತುತ ಈ ಪ್ರಸ್ತಾವನೆ ಇರುವುದಿಲ್ಲ.
ಇ)	25 ವರ್ಷ ವಯಸ್ಸಿನ ಬುದ್ಧಿಮಾಂದ್ಯ / ವಿಕಲಚೇತನರಿಗೆ ಸರ್ಕಾರದ ಕಲ್ಯಾಣ ಕಾರ್ಯಕ್ರಮಗಳಾವುವು? (ವಿವರಗಳನ್ನು ಒದಗಿಸುವುದು)	ಇಲಾಖಾವತಿಯಿಂದ 25 ವರ್ಷ ವಯಸ್ಸಿನ ಬುದ್ಧಿಮಾಂದ್ಯರಿಗೆ **ನೀಡುತ್ತಿರುವ ಇಲಾಖೆಯ ಯೋಜನೆಗಳು** **ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ:** ಈ ಯೋಜನೆಯಡಿ (ಸೆರಬ್ರಲ್ ಪಾಲ್ಸಿ, ಆಟಿಸಂ), ಬುದ್ಧಿಮಾಂದ್ಯ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6800/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ. 6000/- ರಂತೆ ವರ್ಷದಲ್ಲಿ 10 ತಿಂಗಳ ಅವಧಿಗೆ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ. ಈ ಅನುದಾನದಲ್ಲಿ ಶಿಕ್ಷಕರ ಗೌರವಧನ, ಮಕ್ಕಳ ಆಹಾರ ವೆಚ್ಚ, ಕಟ್ಟಡದ ಬಾಡಿಗೆ ಹಾಗೂ ನಿರ್ವಹಣಾ ವೆಚ್ಚ, ಸಮವಸ್ತ್ರ, ವೈದ್ಯಕೀಯ ವೆಚ್ಚ ಹಾಗೂ ಸಾದಿಲ್ವಾರು ವೆಚ್ಚಗಳು ಒಳಗೊಂಡಿರುತ್ತವೆ. **ಸಮಾಜ ಸೇವಾ ಸಂಕೀರ್ಣ:** ನಿರ್ಗತಿಕ ಬುದ್ಧಿಮಾಂದ್ಯ ಪುರುಷರಿಗಾಗಿ ಸಮಾಜ ಸೇವಾ ಸಂಕೀರ್ಣ ಸಂಸ್ಥೆಯು ಬೆಂಗಳೂರಿನಲ್ಲಿ ಸರ್ಕಾರದ ವತಿಯಿಂದ ನಡೆಯುತ್ತಿದ್ದು, ಈ ಸಂಸ್ಥೆಯಲ್ಲಿ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ, ಸಂರಕ್ಷಣೆಯನ್ನು ಒದಗಿಸಲಾಗುತ್ತಿದೆ. ಪ್ರಸ್ತುತ ಸಂಸ್ಥೆಯಲ್ಲಿ 85 ನಿವಾಸಿಗಳು ದಾಖಲಾಗಿರುತ್ತಾರೆ.

ಮಂದಮತಿ ಮಹಿಳೆಯರ ಅನುಪಾಲನಾ ಗೃಹ:

18 ವರ್ಷ ಮೇಲ್ಪಟ್ಟ ನಿರ್ಗತಿಕ ಮಹಿಳಾ ಬುದ್ಧಿಮಾಂದ್ಯರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ ಮತ್ತು ಸಂರಕ್ಷಣೆ ಒದಗಿಸುವ ಉದ್ದೇಶದಿಂದ ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳನ್ನು ಬೆಂಗಳೂರು ನಗರ ಹಾಗೂ ಹುಬ್ಬಳ್ಳಿಯಲ್ಲಿ ಇಲಾಖಾ ವತಿಯಿಂದ ನಡೆಸಲಾಗುತ್ತಿದೆ. ಪ್ರಸ್ತುತ ಬೆಂಗಳೂರಿನ ಅನುಪಾಲನಾ ಕೇಂದ್ರದಲ್ಲಿ 100 ಮಂದಿ ಹಾಗೂ ಹುಬ್ಬಳ್ಳಿ ಅನುಪಾಲನ ಕೇಂದ್ರದಲ್ಲಿ 70 ನಿವಾಸಿಗಳು ದಾಖಲಾಗಿರುತ್ತಾರೆ.

ಮಾನಸಿಕ ಅಸ್ವಸ್ಥರಿಗೆ ಮಾನಸ ಕೇಂದ್ರಗಳು:

ಮಾನಸಿಕ ಅಸ್ವಸ್ಥರಿಗಾಗಿ ಮಾನಸ ಕೇಂದ್ರಗಳನ್ನು ಬೆಂಗಳೂರು ನಗರ ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ನಡೆಸುತ್ತಿದ್ದು, ರಾಜ್ಯ ಉಚ್ಚ ನ್ಯಾಯಾಲಯ ಮತ್ತು ಅಧೀನ ನ್ಯಾಯಾಲಯಗಳಿಂದ ಆದೇಶಿಸಲ್ಪಡುವ ಮಾನಸಿಕ ಅಸ್ವಸ್ಥರನ್ನು ಹಾಗೂ ರಸ್ತೆಗಳಲ್ಲಿ ಓಡಾಡುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಲ್ಲಿ ನಿರ್ದಿಷ್ಟ ವೈದ್ಯಕೀಯ ಪ್ರಾಧಿಕಾರದ ಆದೇಶದ ಮೇರೆಗೆ ದಾಖಲಿಸಲು ಅವಕಾಶವಿರುತ್ತದೆ. ಈ ಕೇಂದ್ರಗಳಲ್ಲಿ ಫಲಾನುಭವಿಗಳಿಗೆ ಉಚಿತ ಊಟ, ವಸತಿ, ವೈದ್ಯಕೀಯ ಶುಶ್ರೂಷೆ, ವೈದ್ಯಕೀಯ ಸಲಹೆ(ಕೌನ್ಸಲಿಂಗ್) ಸೌಲಭ್ಯವನ್ನು ನೀಡಲಾಗುತ್ತಿದ್ದು, ಇವು ಅಲ್ಪಾವಧಿ ಕೇಂದ್ರಗಳಾಗಿರುತ್ತವೆ.

ಬುದ್ಧಿಮಾಂದ್ಯ ಮಕ್ಕಳ ಪೋಷಕರಿಗೆ ವಿಮಾ ಯೋಜನೆ:

ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ: ತಾಯಿ: ಪೋಷಕರ ವಿಮಾ ಯೋಜನೆಯನ್ನು ಭಾರತೀಯ ಜೀವ ವಿಮಾ ನಿಗಮದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ/ತಾಯಿ ಪೋಷಕರು ಮರಣ ಹೊಂದಿದ ನಂತರ ಬುದ್ಧಿಮಾಂದ್ಯ ಮಕ್ಕಳ ಜೀವನ ನಿರ್ವಹಣೆಗಾಗಿ ರೂ.20,000/-ಗಳ ಪರಿಹಾರ ಧನವನ್ನು ಕುಟುಂಬದ ನಾಮ ನಿರ್ದೇಶಿತ ಸದಸ್ಯರಿಗೆ ಪಾವತಿಸಲಾಗುತ್ತಿದೆ.

ನಿರಾಮಯ ಆರೋಗ್ಯ ವಿಮಾ ಯೋಜನೆ :

ಬುದ್ಧಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆ ಹೊಂದಿರುವ ಪ್ರತಿ ವ್ಯಕ್ತಿ ಹಾಗೂ ಮಗುವಿಗೆ ವರ್ಷಕ್ಕೆ ಒಂದು ಬಾರಿ ಪ್ರೀಮಿಯಂ ಮೊತ್ತ ರೂ.250/-ಗಳನ್ನು ಭಾರತ ಸರ್ಕಾರದಿಂದ ಗುರುತಿಸಲ್ಪಟ್ಟ ಅಧಿಕೃತ ಸಂಸ್ಥೆಯಾದ ಅಂಗವಿಕಲರ ಮನಶ್ಚೇತನ ಸಂಸ್ಥೆ (ಎ.ಪಿ.ಡಿ) ಬೆಂಗಳೂರು ರವರಿಗೆ ಪಾವತಿಸಲಾಗುವುದು. ಪ್ರತಿ ವರ್ಷ ಯೋಜನೆಯಡಿ ಬರುವ ಫಲಾನುಭವಿಗಳು ರೂ.1.00 ಲಕ್ಷಗಳವರೆಗೆ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ. ಈ ಮೊತ್ತದಲ್ಲಿ ರೂ.60,000/-ಗಳವರೆಗೆ ಸರ್ಜರಿ ವೆಚ್ಚ ಉಳಿದ ರೂ.40,000/-ಗಳಲ್ಲಿ ವೈದ್ಯಕೀಯ ಖರ್ಚು ಥೆರಪಿ, ಪ್ರಯಾಣ ವೆಚ್ಚಗಳನ್ನು ಒಳಗೊಂಡಿರುತ್ತದೆ.

ವಿಕಲಚೇತನರಿಗಾಗಿ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರಗಳನ್ನು ಅನುಬಂಧ 02 ರಲ್ಲಿ ಲಗತ್ತಿಸಿದೆ.

ಸಂಖ್ಯೆ: ಮಮಇ 33 ಪಿಹೆಚ್‌ಪಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ
ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ಮಮಇ 27 ಪಿಹೆಚ್‌ಪಿ 2021

ಕರ್ನಾಟಕ ಸರ್ಕಾರ ಸಚಿವಾಲಯ
3ನೇ ಗೇಟ್, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:03.02.2021

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬಹುಮಹಡಿಗಳ ಕಟ್ಟಡ, ಬೆಂಗಳೂರು–1.

4/ 156 3/2/21

ಇವರಿಗೆ;
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ,
ಬೆಂಗಳೂರು–560 001.

ಮಾನ್ಯರೆ,

ವಿಷಯ: ಶ್ರೀ ಶ್ರೀನಿವಾಸ್ ಎಂ., ಮಾನ್ಯ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:705ಕ್ಕೆ ಉತ್ತರ ಸಲ್ಲಿಸುವ ಬಗ್ಗೆ.

ಉಲ್ಲೇಖ: ಕರ್ನಾಟಕ ವಿಧಾನ ಸಭೆ ಸಚಿವಾಲಯದ ಪತ್ರ ಸಂಖ್ಯೆ:ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.705/2021, ದಿ:23.01.2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ಶ್ರೀನಿವಾಸ್ ಎಂ., ಮಾನ್ಯ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:705ಕ್ಕೆ ಸಂಬಂಧಿಸಿದಂತೆ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿ ಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

G. H. Saroja
(ಜಿ. ಹೆಚ್. ಸರೋಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ – 2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 705
ಸದಸ್ಯರ ಹೆಸರು : ಶ್ರೀ ಶ್ರೀನಿವಾಸ್ ಎಂ.
ಉತ್ತರಿಸುವ ದಿನಾಂಕ : 03.02.2021
ಉತ್ತರಿಸುವ ಸಚಿವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು.

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಕರ್ನಾಟಕ ರಾಜ್ಯದಲ್ಲಿ ಹಿರಿಯ ನಾಗರೀಕ ಸಬಲೀಕರಣ ಇಲಾಖೆಯಿಂದ ಯಾವ್ಯಾವ ಯೋಜನೆಗಳಡಿಯಲ್ಲಿ ಎಷ್ಟೆಷ್ಟು ಹಣವನ್ನು ಖರ್ಚು ಮಾಡಲಾಗುತ್ತಿದೆ; (ಜಿಲ್ಲೆ ಮತ್ತು ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)	ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಲ್ಲಿನ ಯೋಜನೆಗಳಿಗೆ ಕಳೆದ ಸಾಲಿನಲ್ಲಿ ಖರ್ಚು ಮಾಡಿರುವ ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-1 ರಲ್ಲಿ ಒದಗಿಸಿದೆ.
ಆ)	ರಾಷ್ಟ್ರೀಯ ಅಂಕಿ ಅಂಶದ ಪ್ರಕಾರ ಕರ್ನಾಟಕವು ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಎಷ್ಟನೇ ಸ್ಥಾನದಲ್ಲಿದೆ;	ರಾಷ್ಟ್ರೀಯ ಅಂಕಿ ಅಂಶದ ಕುರಿತಾದ ಮಾಹಿತಿಯು ಲಭ್ಯವಿರುವುದಿಲ್ಲ.
ಇ)	ಸದರಿ ಯೋಜನೆಗಳ ಸಂಪೂರ್ಣ ಮಾಹಿತಿ ನೀಡುವುದು?	ಇಲಾಖೆಯಲ್ಲಿ ವಿಕಲಚೇತನರಿಗಾಗಿ ಹಾಗೂ ಹಿರಿಯ ನಾಗರಿಕರಿಗಾಗಿ ಹಮ್ಮಿಕೊಂಡಿರುವ ಯೋಜನೆಗಳ ವಿವರವನ್ನು ಅನುಬಂಧ-2 ರಲ್ಲಿ ಒದಗಿಸಿದೆ.

ಸಂಖ್ಯೆ: ಮಮಇ 27 ಪಿಹೆಚ್‌ಪಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ, ಹಿರಿಯ ನಾಗರೀಕರ ಸಬಲೀಕರಣ
ಇಲಾಖಾ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಇ 05 ಸಿಎಲ್‌ಎಂ 2021 (ಇ)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 03.02.2021

140
05/2/21

ಇಂದ,
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಹಕಾರ ಇಲಾಖೆ,
ಬೆಂಗಳೂರು-1.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ
ವಿಧಾನ ಸೌಧ
ಬೆಂಗಳೂರು

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಸೋಮಲಿಂಗಪ್ಪ ಎಂ.ಎಸ್. (ಶಿರಗುಪ್ಪ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1077 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/06/2021, ದಿ:30.01.2021

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಶ್ರೀ ಸೋಮಲಿಂಗಪ್ಪ ಎಂ.ಎಸ್. (ಶಿರಗುಪ್ಪ) ಮಾನ್ಯ ವಿಧಾನ ಸಭೆ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1077 ಗೆ ಸಂಬಂಧಿಸಿದ ಉತ್ತರವನ್ನು ಸಿದ್ಧಪಡಿಸಿ 100 ಉತ್ತರದ ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.

ತಮ್ಮ ನಂಬುಗೆಯ

Radha H.C
(ಹೆಚ್.ಸಿ. ರಾಧ)
ಸರ್ಕಾರದ ಅಧೀನ ಕಾರ್ಯದರ್ಶಿ-3(ಪ್ರ),
ಸಹಕಾರ ಇಲಾಖೆ.

ಕರ್ನಾಟಕ ವಿಧಾನ ಸಭೆ

ಮಾನ್ಯ ವಿಧಾನ ಸಭೆಯ ಸದಸ್ಯರ ಹೆಸರು : ಶ್ರೀ ಸೋಮಲಿಂಗಪ್ಪ ಎಂ.ಎಸ್. (ಶಿರಗುಪ್ಪ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1077
ಉತ್ತರಿಸಬೇಕಾದ ದಿನಾಂಕ : 05.02.2021
ಉತ್ತರಿಸಬೇಕಾದ ಸಚಿವರು : ಸಹಕಾರ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ನಡೆಯುವ ಚುನಾವಣೆಗಳಿಗೆ ಸದಸ್ಯತ್ವವನ್ನು ಪಡೆದಿರುವ ಎಲ್ಲಾ ಷೇರುದಾರರಿಗೆ ಚುನಾವಣೆಯಲ್ಲಿ ಮತ ಚಲಾಯಿಸಲು ಅವಕಾಶ ನೀಡದೆ ಕೆಲವೇ ಷೇರುದಾರರಿಗೆ ಅವಕಾಶ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಒಳಗೊಂಡಂತೆ ಎಲ್ಲಾ ರೀತಿಯ ಸಹಕಾರ ಸಂಘಗಳಲ್ಲಿರುವ ಷೇರುದಾರರಿಗೆ ಮತ ಚಲಾಯಿಸಲು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ಕಲಂ 20(2) (a-iv), (a-v) ರೀತ್ಯಾ ಕಳೆದ 5 ಸಹಕಾರ ವರ್ಷಗಳಲ್ಲಿ ಕನಿಷ್ಠ ಮೂರು ಸರ್ವ ಸದಸ್ಯರ ಸಭೆಗೆ ಹಾಜರಾಗಿರುವ ಮತ್ತು ಕಳೆದ ಐದು ಸಹಕಾರ ವರ್ಷಗಳಲ್ಲಿ ನಿರಂತರ ಮೂರು ಸಹಕಾರ ವರ್ಷಗಳಿಗೆ ಕನಿಷ್ಠ ಸೇವೆಯನ್ನು ಸಂಘದ ಉಪನಿಯಮದ ರೀತ್ಯಾ ಉಪಯೋಗಿಸಿಕೊಂಡಿದ್ದಲ್ಲಿ ಮಾತ್ರ ಅಂತಹ ಷೇರುದಾರರಿಗೆ ಮತದಾನದ ಹಕ್ಕು ಲಭಿಸುತ್ತದೆ. ಮೇಲ್ಕಂಡ ಅರ್ಹತೆ ಹೊಂದಿರದ ಷೇರುದಾರರು ಮತದಾನದಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ.
ಆ)	ಬಂದಿದ್ದಲ್ಲಿ, ಸಂಘಗಳ ಎಲ್ಲಾ ಷೇರುದಾರರಿಗೆ ಚುನಾವಣೆಯಲ್ಲಿ ಮತ ಚಲಾಯಿಸಲು ಅವಕಾಶ ನೀಡದೇ ಇರುವುದರಿಂದ ಚುನಾವಣಾ ಅಕ್ರಮ ಎಸಗಲು ರಹದಾರಿ ನೀಡಿದಂತಾಗುವುದಿಲ್ಲವೇ;	ಅನರ್ಹ ಷೇರುದಾರರು ಚುನಾವಣೆಗೆ ಮತ ಚಲಾಯಿಸಲು ಅವಕಾಶವಿಲ್ಲದಿರುವುದು ಚುನಾವಣಾ ಅಕ್ರಮವಾಗುವುದಿಲ್ಲ.
ಇ)	ಹಾಗಿದ್ದಲ್ಲಿ, ಎಲ್ಲಾ ಷೇರುದಾರರಿಗೆ ಚುನಾವಣೆಯಲ್ಲಿ ಮತ ಚಲಾಯಿಸಲು ಅಗತ್ಯ ಕ್ರಮ ಕೈಗೊಳ್ಳಲು ಇರುವ ಆಡಚಣೆಗಳೇನು? (ವಿವರ ನೀಡುವುದು)	ಸಹಕಾರ ಸಂಘಗಳ ಕಾಯ್ದೆ 1959 ಕಲಂ 20(2) (a-iv), (a-v) ನಲ್ಲಿನ ಅಂಶಗಳನ್ನು ಷೇರುದಾರರು ಅನುಪಾಲಿಸಿದ್ದಲ್ಲಿ ಯಾವುದೇ ಆಡಚಣೆಗಳು ಇರುವುದಿಲ್ಲ.

ಸಿಒ 05 ಸಿಎಲ್ಎಂ 2021 (ಇ)

(ಎಸ್.ಟಿ.ಸೋಮಶೇಖರ್)
ಸಹಕಾರ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: MWD 26 LMQ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 02-02-2021.

ಇವರಿಂದ,

ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

4/5 154 3/2/21

ಇವರಿಗೆ,

ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ
ಬೆಂಗಳೂರು.

ಮಾನ್ಯರೇ,

ವಿಷಯ : ಶ್ರೀ ಶ್ರೀನಿವಾಸ್ ಎಂ. (ಮಂಡ್ಯ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 703 ಉತ್ತರಿಸುವ ಬಗ್ಗೆ.

*****

ಶ್ರೀ ಶ್ರೀನಿವಾಸ್ ಎಂ. (ಮಂಡ್ಯ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 703 ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಗೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ

ತಮ್ಮ ವಿಶ್ವಾಸಿ,

(ಎಂ.ಎ.ಮನ್ನೂರ)
ಶಾಖಾಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 703

ಸದಸ್ಯರ ಹೆಸರು : ಶ್ರೀ ಶ್ರೀನಿವಾಸ್ ಎಂ. (ಮಂಡ್ಯ)

ಉತ್ತರಿಸಬೇಕಾದ ದಿನಾಂಕ : 03-02-2021.

ಉತ್ತರಿಸುವ ಸಚಿವರು : ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು.

ಕ್ರ. ಸಂ.	ಪ್ರಶ್ನೆಗಳು	ಉತ್ತರಗಳು
ಅ.	ಮಂಡ್ಯ ನಗರದಲ್ಲಿರುವ ಬೀಡಿ ಕಾರ್ಮಿಕರ ಕಾಲೋನಿ ಮತ್ತು ಇತರ ಹಲವು ಮಸೀದಿಗಳು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಡಿಯಲ್ಲಿ ಬರುವ ಮಂಡ್ಯ ಜಿಲ್ಲೆಯ ಮಂಡ್ಯ ನಗರದಲ್ಲಿರುವ ಬೀಡಿ ಕಾರ್ಮಿಕರ ಕಾಲೋನಿಗಳ ಮಸೀದಿಗಳಿಂದ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ. ಮಂಡ್ಯ ನಗರದಲ್ಲಿರುವ ಇತರೆ ವಕ್ಫ್ ಸಂಸ್ಥೆಗಳಿಂದ ಮಸೀದಿಗಳ ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ ಸ್ವೀಕರಿಸಲಾಗಿರುವ ಪ್ರಸ್ತಾವನೆಗಳು ಪರಿಶೀಲನೆ ಹಂತದಲ್ಲಿರುತ್ತವೆ.
ಆ.	ಬಂದಿದ್ದಲ್ಲಿ, ಈ ಮಸೀದಿಗಳ ಜೀರ್ಣೋದ್ಧಾರಕ್ಕೆ ತೆಗೆದುಕೊಂಡಿರುವ ಕ್ರಮಗಳೇನು;	ಮಂಡ್ಯ ನಗರದಲ್ಲಿರುವ ಇತರೆ ವಕ್ಫ್ ಸಂಸ್ಥೆಗಳಿಂದ ಸ್ವೀಕರಿಸಲಾಗಿರುವ ಪ್ರಸ್ತಾವನೆಗಳು ಪರಿಶೀಲನೆ ಹಂತದಲ್ಲಿರುತ್ತವೆ.
ಇ	ಬೀಡಿ ಕಾರ್ಮಿಕರ ಕಾಲೋನಿಯಲ್ಲಿನ ಮಸೀದಿಗೆ 50 ಲಕ್ಷ ರೂ.ಗಳು ಅಂದಾಜು ವೆಚ್ಚದ ಪಟ್ಟಿ ಸಲ್ಲಿಸಿದ್ದರೂ ಈವರೆಗೂ ಕಾರ್ಯಗತಕ್ಕೆ ಬರದಿರಲು ಕಾರಣವೇನು;	ಬೀಡಿ ಕಾರ್ಮಿಕರ ಕಾಲೋನಿಯ ಮಸೀದಿಗೆ ಸಂಬಂಧಪಟ್ಟಂತೆ ಯಾವುದೇ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ.
ಈ	ಬೀಡಿ ಕಾರ್ಮಿಕರ ಕಾಲೋನಿಯಲ್ಲಿ ಕಳೆದ 5-ವರ್ಷಗಳಿಂದಲೂ ಅಲ್ಪಸಂಖ್ಯಾತರ ಕಟ್ಟಡ ಕಾರ್ಯ ಪೂರ್ಣಗೊಳ್ಳದಿರಲು ಕಾರಣವೇನು?	ಮಂಡ್ಯ ನಗರದಲ್ಲಿರುವ ಬೀಡಿ ಕಾರ್ಮಿಕರ ಕಾಲೋನಿಯಲ್ಲಿ ನಿರ್ಮಿಸಲಾಗುತ್ತಿರುವ ಅಲ್ಪಸಂಖ್ಯಾತರ ಕಟ್ಟಡದ ಸುಣ್ಣ-ಬಣ್ಣ, ಕಿಟಕಿ ಬಾಗಿಲುಗಳ ಕೆಲಸ ಬಾಕಿಯಿದ್ದು, ಪೂರ್ಣಗೊಳ್ಳುವ ಹಂತದಲ್ಲಿರುತ್ತದೆ.

ಸಂಖ್ಯೆ: MWD 26 LMQ 2021

(ಆನಂದ್ ಸಿಂಗ್)
ಮೂಲಸೌಲಭ್ಯ ಅಭಿವೃದ್ಧಿ ಹಾಗೂ
ಹಜ್ ಮತ್ತು ವಕ್ಫ್ ಸಚಿವರು

ಕರ್ನಾಟಕ ಸರ್ಕಾರ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಆಯುಕ್ತರವರ ಕಛೇರಿ, ಗ್ರಾ.ಕುನೀ.&.ನೈ.ಇ., 2ನೇ ಮಹಡಿ, "ಇ" ಬ್ಲಾಕ್, ಕೆಹೆಚ್‌ಬಿ ಕಟ್ಟಡ,
ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009. ☎:080-22240508 📠:22240509
ಇ-ಮೇಲ್: krwssd@gmail.com

ಸಂ:ಗ್ರಾಕುನೀ&ನೈಇ/134/ಗ್ರಾನೀಸ(4)2020

ದಿನಾಂಕ:02.02.2021.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು-01.

99
415
03/2/21

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಮುನಿಯಪ್ಪ.ವಿ (ಶಿಡ್ಲಘಟ್ಟ) ಇವರ ಚುಕ್ಕೆ ರಹಿತ ಪ್ರಶ್ನೆ ಸಂ:566ಕ್ಕೆ ಸಂಬಂಧಿಸಿದ ಮೇಲಿನ ಕ್ರಮ/ವಾಸ್ತವಿಕ ವರದಿಯ ಉತ್ತರ ನೀಡುವ ಬಗ್ಗೆ.

******

ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಮುನಿಯಪ್ಪ.ವಿ (ಶಿಡ್ಲಘಟ್ಟ) ಇವರ ಚುಕ್ಕೆ ರಹಿತ ಪ್ರಶ್ನೆ ಸಂ:566ಕ್ಕೆ ಉತ್ತರದ <u>25</u> ಪ್ರತಿಗಳನ್ನು ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ತಮ್ಮ ವಿಶ್ವಾಸಿ,
02/2/2021
ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಪ್ರತಿಯನ್ನು:
1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರಿಗೆ

ಕರ್ನಾಟಕ ವಿಧಾನಸಭೆ

ಸದಸ್ಯರ ಹೆಸರು : ಶ್ರೀ ಮುನಿಯಪ್ಪ ವಿ. (ಶಿಡ್ಲಘಟ್ಟ)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 566

ಉತ್ತರ ದಿನಾಂಕ : 03.02.2021

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಶಿಡ್ಲಘಟ್ಟ ವಿಧಾನ ಸಭಾ ಕ್ಷೇತ್ರದ ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಸಮಸ್ಯೆ ಹೆಚ್ಚಾಗಿದ್ದು, ಈಗಾಗಲೇ ಬೇಸಿಗೆ ಕಾಲ ಆರಂಭವಾಗುತ್ತಿರುವುದರಿಂದ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	-ಬಂದಿದೆ-
ಆ)	ಹಾಗಿದ್ದಲ್ಲಿ ಪ್ರಸಕ್ತ ಸಾಲಿನಲ್ಲಿ ಕುಡಿಯುವ ನೀರಿಗೆ ತೆಗೆದುಕೊಂಡಿರುವ ಕ್ರಮಗಳೇನು; ಶಿಡ್ಲಘಟ್ಟ ವಿಧಾನ ಸಭಾ ಕ್ಷೇತ್ರದ ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಸಮಸ್ಯೆ ಇರುವಂತಹ ಗ್ರಾಮಗಳಲ್ಲಿ ಕೊಳವೆ ಬಾವಿ ಕೊರೆದು ಸುಮಾರು ತಿಂಗಳುಗಳಾದರೂ ಪಂಪು ಮೋಟಾರ್ ಅಳವಡಿಸದೇ ಸಾರ್ವಜನಿಕವಾಗಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಕೊಳವೆಬಾವಿಗಳನ್ನು ಕೊರೆದ ತಕ್ಷಣ ಪಂಪು ಮೋಟರ್ ಅಳವಡಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು;	ಪ್ರಸಕ್ತ ಸಾಲಿನಲ್ಲಿ ಶಿಡ್ಲಘಟ್ಟ ತಾಲ್ಲೂಕಿಗೆ ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲು ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ. 1. Contigency Action Plan ಅಡಿಯಲ್ಲಿ (CAP-1, 2, &3) ಒಟ್ಟು ರೂ.55.00ಲಕ್ಷಗಳು. 2. ದಿನಾಂಕ:18.07.2020 ರಂದು ಟಾಸ್ಕ್‌ಫೋರ್ಸ್ ಅಡಿಯಲ್ಲಿ ಹೆಚ್ಚುವರಿಯಾಗಿ ರೂ.55.00ಲಕ್ಷಗಳು. 3. ಎಸ್.ಡಿ.ಪಿ ಯೋಜನೆಯಡಿಯಲ್ಲಿ ಬೆಸ್ಕಾಂ (ವಿದ್ಯುತ್ತೀಕರಣ) ಇಲಾಖೆಗೆ ಪಾವತಿಸಬೇಕಾದ ರೂ.136.00ಲಕ್ಷಗಳ ಬಾಕಿ ಉಳಿದ ಕಾಮಗಾರಿಗಳ ಅನುದಾನವನ್ನು ಪಾವತಿಸಲಾಗಿದೆ. ಶಿಡ್ಲಘಟ್ಟ ತಾಲ್ಲೂಕಿನಲ್ಲಿ ಪ್ರಸ್ತುತ 11 ಗ್ರಾಮಗಳಲ್ಲಿ ಕುಡಿಯುವ ನೀರು ಅಭಾವ ಉಂಟಾಗಿದ್ದು, ಸದರಿ ಗ್ರಾಮಗಳಿಗೆ ಖಾಸಗಿ ಕೊಳವೆ ಬಾವಿ ಮುಖಾಂತರ ನೀರು ಪೂರೈಸಲಾಗುತ್ತಿದೆ. ಈಗಾಗಲೇ ಕೊರೆದಿರುವ ಕೊಳವೆ ಬಾವಿಗಳಿಗೆ ಸರ್ಕಾರದಿಂದ ಹೆಚ್ಚುವರಿಯಾಗಿ ಬಿಡುಗಡೆಯಾದ ರೂ.25.20ಲಕ್ಷಗಳ ಅನುದಾನದಲ್ಲಿ 28 ಪಂಪು ಮೋಟಾರ್‌ಗಳನ್ನು ಟೆಂಡರ್ ಮೂಲಕ ಖರೀದಿಸಿ ಸಂಬಂಧಪಟ್ಟ ಗ್ರಾಮಪಂಚಾಯ್ತಿಗಳಿಗೆ ವಿತರಿಸಲಾಗಿದೆ.
ಇ)	ಶಿಡ್ಲಘಟ್ಟ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಇದುವರೆಗೂ ಅನುಮೋದನೆ ನೀಡಲಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳೆಷ್ಟು; ಹಾಗಿದ್ದಲ್ಲಿ ಸದರಿ ಕ್ಷೇತ್ರದಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯಗತವಾಗಿ ಕಾರ್ಯನಿರ್ವಹಿಸುತ್ತಿವೆ; ದುರಸ್ಥಿಯಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳೆಷ್ಟು; ಹಾಗಿದ್ದಲ್ಲಿ ದುರಸ್ತಿಯಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ದುರಸ್ತಿ ಮಾಡಲು ಯಾವ ಏಜೆನ್ಸಿಗೆ ನೀಡಲಾಗಿದೆ; ಹೊಸ ಶುದ್ಧ ಕುಡಿಯುವ ನೀರಿನ ಘಟಕಗಳ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ ಹೊಸ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಯಾವಾಗ ಮಂಜೂರು ಮಾಡಲಾಗುತ್ತದೆ?	ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರಕ್ಕೆ ಕಳೆದ ಮೂರು ವರ್ಷಗಳಲ್ಲಿ 7 ಶುದ್ಧ ಕುಡಿಯುವ ನೀರಿನ ಘಟಕಗಳು ಮಂಜೂರಾಗಿದ್ದು, ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆ. ಶಿಡ್ಲಘಟ್ಟ ವಿಧಾನ ಸಭಾ ಕ್ಷೇತ್ರದಲ್ಲಿನ ಶುದ್ಧ ಕುಡಿಯುವ ನೀರಿನ ಘಟಕಗಳ ವಿವರಗಳು ಈ ಕೆಳಕಂಡಂತಿವೆ; ಒಟ್ಟು ಅನುಷ್ಠಾನಗೊಂಡಿರುವ ಘಟಕಗಳ ಸಂಖ್ಯೆ : 125 ಒಟ್ಟು ಕಾರ್ಯನಿರ್ವಹಿಸುತ್ತಿರುವ ಘಟಕಗಳ ಸಂಖ್ಯೆ : 119 ಒಟ್ಟು ದುರಸ್ಥಿಯಲ್ಲಿರುವ ಘಟಕಗಳ ಸಂಖ್ಯೆ : 06 ಕಾರ್ಯಚರಣೆ ಹಾಗೂ ನಿರ್ವಹಣೆಯನ್ನು ಟೆಂಡರ್ ಮೂಲಕ ರಾಜೇಶ್.ಕೆ ಫ್ಲೋ.ಆರ್.ಓ ರವರಿಗೆ ವಹಿಸಿಕೊಡಲಾಗಿದೆ. ಹೊಸ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಮಂಜೂರು ಮಾಡುವ ಪೂರ್ವದಲ್ಲಿ ಅಂತಹ ಗ್ರಾಮಗಳಲ್ಲಿನ ಜಲಮೂಲಗಳ ನೀರಿನ ಮಾದರಿಗಳನ್ನು ಪ್ರಯೋಗಾಲಯಗಳಲ್ಲಿ ಪರೀಕ್ಷಿಸಿ ನೀರು ಕಲುಷಿತ ಕಂಡು ಬಂದ ಸದರಿ ಗ್ರಾಮಗಳಲ್ಲಿ ಮಾರ್ಗಸೂಚಿಯಂತೆ, ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಲು ಕ್ರಮವಹಿಸಲಾಗುವುದು.

ಸಂ:ಗ್ರಾಕುನೀ&ನೈಇ 134 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಆಯುಕ್ತರವರ ಕಛೇರಿ, ಗ್ರಾ.ಕುನೀ.&.ನೈ.ಇ., 2ನೇ ಮಹಡಿ, "ಇ" ಬ್ಲಾಕ್, ಕೆಹೆಚ್‌ಬಿ ಕಟ್ಟಡ,
ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009. ☎:080-22240508 📠:22240509
ಇ-ಮೇಲ್: krwssd@gmail.com

ಸಂ:ಗ್ರಾಕುನೀ&ನೈಇ/132/ಗ್ರಾನೀಸ(4)2020 ದಿನಾಂಕ:02.02.2021.

95
ULS
03/2/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು-01.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ **ಮಸಾಲ ಜಯರಾಮ್ (ತುರುವೇಕೆರೆ) ಇವರ ಚುಕ್ಕೆ ರಹಿತ ಪ್ರಶ್ನೆ ಸಂ:362ಕ್ಕೆ** ಸಂಬಂಧಿಸಿದ ಮೇಲಿನ ಕ್ರಮ/ವಾಸ್ತವಿಕ ವರದಿಯ ಉತ್ತರ ನೀಡುವ ಬಗ್ಗೆ.

******

ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ **ಮಸಾಲ ಜಯರಾಮ್ (ತುರುವೇಕೆರೆ) ಇವರ ಚುಕ್ಕೆ ರಹಿತ ಪ್ರಶ್ನೆ ಸಂ:362ಕ್ಕೆ** ಉತ್ತರದ **<u>25</u>** ಪ್ರತಿಗಳನ್ನು ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ತಮ್ಮ ವಿಶ್ವಾಸಿ,
02/02/2021
ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

<u>ಪ್ರತಿಯನ್ನು:</u>
1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರಿಗೆ

ಕರ್ನಾಟಕ ವಿಧಾನಸಭೆ

ಸದಸ್ಯರ ಹೆಸರು : ಶ್ರೀ ಮಸಾಲ ಜಯರಾಮ್ (ತುರುವೇಕೆರೆ)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 362

ಉತ್ತರ ದಿನಾಂಕ : 03.02.2021

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ತುಮಕೂರು ಜಿಲ್ಲಾ ತುರುವೇಕೆರೆ ತಾಲ್ಲೂಕಿನಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿಯಲ್ಲಿ ಸಾರಿಗೆಹಳ್ಳಿ ಕೆರೆಯಿಂದ ಅಮ್ಮಸಂದ್ರ, ದಂಡಿನಶಿವರ ವ್ಯಾಪ್ತಿಯ 30 ಗ್ರಾಮಗಳಿಗೆ ಹಾಗೂ ಮಲ್ಲಘಟ್ಟ ಕೆರೆಯಿಂದ ಲೋಕಮ್ಮನಹಳ್ಳಿ, ಆನೆಕೆರೆ 27 ಗ್ರಾಮಗಳಿಗೆ ಯೋಜನೆ ರೂಪಿಸಲು ಪ್ರಸ್ತಾವನೆ ಸಲ್ಲಿಸಲಾಗಿದ್ದು, ಪ್ರಸ್ತುತ ಯಾವ ಹಂತದಲ್ಲಿದೆ;	ತುರುವೇಕೆರೆ ತಾಲ್ಲೂಕಿನ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಲ್ಲಿ ಸಾರಿಗೆಹಳ್ಳಿ ಕೆರೆಯಿಂದ ಅಮ್ಮಸಂದ್ರ, ದಂಡಿನಶಿವರ ವ್ಯಾಪ್ತಿಯ 30 ಗ್ರಾಮಗಳಿಗೆ ಹಾಗೂ ಮಲ್ಲಘಟ್ಟ ಕೆರೆಯಿಂದ ಲೋಕಮ್ಮನಹಳ್ಳಿ, ಆನೆಕೆರೆ 27 ಗ್ರಾಮಗಳಿಗೆ ಯೋಜನೆಯ ಪ್ರಸ್ತಾವನೆಗಳ ರೇಖಾ ಅಂದಾಜು ಪಟ್ಟಿಗಳು ದಿನಾಂಕ:28.07.2016ರಂದು ನಡೆದ SLSSC ಸಭೆಯಲ್ಲಿ ಅನುಮೋದನೆಗೊಂಡಿರುವುದಿಲ್ಲ.
ಆ)	ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಸದರಿ ಗ್ರಾಮಗಳ ಗ್ರಾಮಸ್ಥರುಗಳಿಗೆ ಯೋಜನೆಯ ಪ್ರಸ್ತಾವನೆ ಅನುಮೋದನೆ ನೀಡಿ ಕಾಮಗಾರಿ ಪ್ರಾರಂಭಿಸಿ ಗ್ರಾಮಗಳೀಗೆ ಕುಡಿಯುವ ನೀರನ್ನು ಒದಗಿಸಲಾಗುವುದು);	ಯೋಜನೆಯನ್ನು JJM ಮಾರ್ಗಸೂಚಿಯನ್ವಯ 55 LPCDಗೆ ಮಾರ್ಪಾಡಿಸಿ ಸುಸ್ಥಿರ ಜಲಮೂಲ ಮತ್ತು ಅನುದಾನ ಲಭ್ಯತೆಯಾನುಸಾರ ಯೋಜನೆಯನ್ನು ಕೈಗೆತ್ತಿಕೊಳ್ಳಲು ಯೋಜಿಸಲಾಗುವುದು.
ಇ)	ಈ ಯೋಜನೆಗೆ ಇದುವರೆಗೂ ಅನುಮೋದನೆ ದೊರೆಯದಿರಲು ಕಾರಣಗಳೇನು? (ಸಂಪೂರ್ಣ ಮಾಹಿತಿ ನೀಡುವುದು)	

ಸಂ:ಗ್ರಾಕುನೀ&ನೈಇ 132 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: MWD 19 LMQ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 02-02-2021.

ಇವರಿಂದ,

ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

ಇವರಿಗೆ,

ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ
ಬೆಂಗಳೂರು.

4/1/122
3/2/21

ಮಾನ್ಯರೇ,

ವಿಷಯ : ಶ್ರೀ ರಾಜೀವ್ ಪಿ. (ಕುಡಚಿ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 665 ಉತ್ತರಿಸುವ ಬಗ್ಗೆ.

*****

ಶ್ರೀ ರಾಜೀವ್ ಪಿ. (ಕುಡಚಿ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 665 ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಗೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ

ತಮ್ಮ ವಿಶ್ವಾಸಿ,

(ಎಂ.ಎ.ಮನ್ಸೂರ)
ಶಾಖಾಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	665
ಸದಸ್ಯರ ಹೆಸರು	:	ಶ್ರೀ ರಾಜೀವ್ ಪಿ. (ಕುಡಚಿ)
ಉತ್ತರಿಸಬೇಕಾದ ದಿನಾಂಕ	:	03-02-2021.
ಉತ್ತರಿಸುವ ಸಚಿವರು	:	ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು.

ಕ್ರ. ಸಂ.	ಪ್ರಶ್ನೆಗಳು	ಉತ್ತರಗಳು
ಅ.	ರಾಜ್ಯದಲ್ಲಿ ವಕ್ಫ್ ಮಂಡಳಿಯ ಆಸ್ತಿಗಳು ಪರಭಾರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಹೌದು.
ಆ.	ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯ ಕುಡಚಿ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು ಎಷ್ಟು ಎಕರೆ /ಆಸ್ತಿಗಳು ಪರಭಾರೆಯಾಗಿದೆ:	ಬೆಳಗಾವಿ ಜಿಲ್ಲೆಯ ಕುಡಚಿಯಲ್ಲಿ ವಕ್ಫ್ ಆಸ್ತಿಗಳು ಪರಭಾರೆಯಾಗಿರುವುದು ವರದಿಯಾಗಿರುವುದಿಲ್ಲ.
ಇ	ಖೋಟಾ ದಾಖಲೆಗಳನ್ನು ಸೃಷ್ಟಿಸಿ ಭೂ ಕಬಳಿಕೆ ಮಾಡಿದವರ ವಿರುದ್ಧ ಭಾರತೀಯ ದಂಡ ಸಂಹಿತೆ ಅಡಿ ಕಲಂ 405. 409.420. ಕಲಂ 52(ಎ) ವಕ್ಫ್ ಅಧಿನಿಯಮದಂತೆ ಪ್ರಕರಣವನ್ನು ದಾಖಲಿಸಲು ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣಗಳೇನು:	ಉದ್ಭವಿಸುವುದಿಲ್ಲ
ಈ	ಬೆಳಗಾವಿ ಜಿಲ್ಲೆಯ ಕುಡಚಿಯಲ್ಲಿ ಒತ್ತುವರಿ ಮಾಡಿರುವವರ ವಿರುದ್ಧ ಪ್ರಕರಣವನ್ನು ದಾಖಲಿಸಿ ನೋಟಿಸ್ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು:	ಉದ್ಭವಿಸುವುದಿಲ್ಲ
ಉ	ವಕ್ಫ್ ಆಸ್ತಿಯನ್ನು ಒತ್ತುವರಿ ಮಾಡಿರುವ ಮಾಲೀಕರ ವಿರುದ್ಧ ವಕ್ಫ್ ಕಾಯ್ದೆ 1995ರ ಕಲಂ 52ರ ಅಡಿಯಲ್ಲಿ ಕ್ರಮ ತೆಗೆದುಕೊಳ್ಳದಿರಲು ಕಾರಣವೇನು: ವಕ್ಫ್ ಆಸ್ತಿಗಳನ್ನು ಸಂರಕ್ಷಣೆ ಮಾಡಲು ಸರ್ಕಾರದ ಕ್ರಮಗಳೇನು?	ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಕಲಂ 54ರಡಿಯಲ್ಲಿ ಮೂರು ಪ್ರಕರಣ ದಾಖಲಾಗಿದೆ ಮತ್ತು ಒಂದು ಪ್ರಕರಣ Karnataka Public Premises Eviction Act 1974ರಲ್ಲಿ ದಾಖಲಾಗಿದೆ. ಪ್ರಕರಣಗಳು ವಿಚಾರಣೆ ಹಂತದಲ್ಲಿವೆ. ವಿಚಾರಣೆ ಮುಗಿದ ನಂತರ ಕಲಂ 52ಎ ರಡಿಯಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ನಿಯಮಾನುಸಾರ ಕ್ರಮ ಜರುಗಿಸಲಾಗುವುದು.

ಸಂಖ್ಯೆ: MWD 19 LMQ 2021

(ಆನಂದ್ ಸಿಂಗ್)
ಮೂಲಸೌಲಭ್ಯ ಅಭಿವೃದ್ಧಿ ಹಾಗೂ
ಹಜ್ ಮತ್ತು ವಕ್ಫ್ ಸಚಿವರು

ಕರ್ನಾಟಕ ಸರ್ಕಾರ

ಸಂ: ಟಿಡಿ 30 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 02.02.2021.

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

4/5 48 3/2/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ದಿನೇಶ್ ಗೂಂಡೂರಾವ್ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 697 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ದಿನೇಶ್ ಗುಂಡೂರಾವ್. ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 697 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Mala S. 02/02/2021
(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 697

ಸದಸ್ಯರ ಹೆಸರು : ಶ್ರೀ ದಿನೇಶ್ ಗುಂಡೂರಾವ್ (ಗಾಂಧೀನಗರ)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 03-02-2021

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ ಮೂರು ವರ್ಷಗಳಿಂದ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಮತ್ತು ಬಿ.ಎಂ.ಟಿ.ಸಿ ಬಸ್‌ಗಳಲ್ಲಿನ ಜಾಹೀರಾತುಗಳಿಂದ ಸಾರಿಗೆ ಸಂಸ್ಥೆಗಳಿಗೆ ಬಂದಿರುವ ಆದಾಯವೆಷ್ಟು; (ವಿವರ ನೀಡುವುದು)</td><td>ಕಳೆದ ಮೂರು ವರ್ಷಗಳಿಂದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗಳಿಗೆ ಜಾಹೀರಾತಿನಿಂದ ಬಂದ ಆದಾಯದ ವಿವರಗಳು ಈ ಕೆಳಕಂಡಂತಿದೆ:
(ರೂ.ಕೋಟಿಗಳು)
<table>
<tr><th>ಸಂಸ್ಥೆಗಳು</th><th>2017-18</th><th>2018-19</th><th>2019-20</th><th>ಒಟ್ಟು</th></tr>
<tr><td>ಕ.ರಾ.ರ.ಸಾ.ನಿಗಮ</td><td>6.18</td><td>11.03</td><td>9.55</td><td>26.76</td></tr>
<tr><td>ಬೆಂ.ಮ.ಸಾ.ಸಂಸ್ಥೆ</td><td>13.09</td><td>12.66</td><td>17.38</td><td>43.13</td></tr>
<tr><td>ವಾ.ಕ.ರ.ಸಾ.ಸಂಸ್ಥೆ</td><td>0.84</td><td>1.57</td><td>3.16</td><td>5.57</td></tr>
<tr><td>ಈ.ಕ.ರ.ಸಾ.ಸಂಸ್ಥೆ</td><td>0.50</td><td>0.85</td><td>3.54</td><td>4.89</td></tr>
<tr><td>ಒಟ್ಟು</td><td>20.61</td><td>26.11</td><td>33.63</td><td>80.35</td></tr>
</table></td></tr>
<tr><td>ಆ)</td><td>ವಾರ್ತಾ ಇಲಾಖೆಯ ಮುಖಾಂತರ ಕೆ.ಎಸ್.ಆರ್.ಟಿ.ಸಿ ಮತ್ತು ಬಿ.ಎಂ.ಟಿ.ಸಿ ಸಂಸ್ಥೆಗಳಿಗೆ ಎಷ್ಟು ಜಾಹೀರಾತು ನೀಡಲಾಗಿದೆ; ಸದರಿ ಸರ್ಕಾರದ ಜಾಹೀರಾತುಗಳಿಗೆ ವಾರ್ತಾ ಇಲಾಖೆಯಿಂದ ಸಂಸ್ಥೆಗೆ ಪಾವತಿಸಿರುವ ಮೊತ್ತ ಎಷ್ಟು; (ವಿವರ ನೀಡುವುದು)</td><td>ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗಳಿಗೆ ವಾರ್ತಾ ಇಲಾಖೆಯಿಂದ ನೇರವಾಗಿ ಯಾವುದೇ ಜಾಹೀರಾತು ನೀಡಿರುವುದಿಲ್ಲ.</td></tr>
<tr><td>ಇ)</td><td>ಬೆಂಗಳೂರು ನಗರದಾದ್ಯಂತ ಬಿ.ಎಂ.ಟಿ.ಸಿ ಬಸ್ ನಿಲ್ದಾಣಗಳಲ್ಲಿ ವಾರ್ತಾ ಇಲಾಖೆ ಮತ್ತು ಸರ್ಕಾರದ ಇತರ ಇಲಾಖೆಗಳಿಂದ ನೀಡಿರುವ ಜಾಹೀರಾತಿನಿಂದ ಬಂದ ಆದಾಯವೆಷ್ಟು? (ವಿವರ ನೀಡುವುದು)</td><td>ಬೆಂಗಳೂರು ನಗರದಾದ್ಯಂತ ಬಿ.ಎಂ.ಟಿ.ಸಿ ಬಸ್ ನಿಲ್ದಾಣಗಳಲ್ಲಿ ವಾರ್ತಾ ಇಲಾಖೆ ಮತ್ತು ಸರ್ಕಾರದ ಇತರ ಇಲಾಖೆಗಳ ಜಾಹೀರಾತಿನಿಂದ ಯಾವುದೇ ಅದಾಯ ಬಂದಿರುವುದಿಲ್ಲ.</td></tr>
</table>

ಸಂಖ್ಯೆ: ಟಿಡಿ 30 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

AHF/ 22 /AID /2021-AHF_SEC_b_AH_ Animal Husbandry Fisheries sec

ಕರ್ನಾಟಕ ಸರ್ಕಾರ

ಸಂಖ್ಯೆ:ಇ-ಪಸಂಮೀ 22 ಸಲೆವಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ:01.02.2021

03
ws
3/2/21

ಇವರಿಂದ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
ಬೆಂಗಳೂರು.

ಇವರಿಗೆ:

ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ,

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ **ಶ್ರೀ ಅಬ್ಬಯ್ಯ ಪ್ರಸಾದ್ (ಹುಬ್ಬಳ್ಳಿ-ಧಾರವಾಡ ಪೂರ್ವ)** ಇವರು ಸದನದಲ್ಲಿ ಮಂಡಿಸಿರುವ ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ: 754 ಕ್ಕೆ ಉತ್ತರಿಸುವ ಬಗ್ಗೆ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಸಭೆಯ ಮಾನ್ಯ ವಿಧಾನ ಸಭೆಯ ಸದಸ್ಯರಾದ **ಶ್ರೀ ಅಬ್ಬಯ್ಯ ಪ್ರಸಾದ್ (ಹುಬ್ಬಳ್ಳಿ-ಧಾರವಾಡ ಪೂರ್ವ)** ಇವರು ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 754 ಕ್ಕೆ ಕನ್ನಡ ಭಾಷೆಯಲ್ಲಿ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಬಿ.ಎನ್. ಪ್ರವೀಣ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
(ಪಶುಸಂಗೋಪನೆ)

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ಅಬ್ಬಯ್ಯ ಪ್ರಸಾದ್ (ಹುಬ್ಬಳ್ಳಿ-ಧಾರವಾಡ ಪೂರ್ವ)

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 754

ಉತ್ತರಿಸಬೇಕಾದ ದಿನಾಂಕ : 03.02.2021.

ಉತ್ತರಿಸಬೇಕಾದ ಸಚಿವರು : ಮಾನ್ಯ ಪಶುಸಂಗೋಪನೆ ಸಚಿವರು.

ಕ್ರಸಂ	ಪ್ರಶ್ನೆಗಳು	ಉತ್ತರಗಳು
ಅ	ಹುಬ್ಬಳ್ಳಿ ಧಾರವಾಡ ಪೂರ್ವ ಮತಕ್ಷೇತ್ರ 2018-19, 2019-20, 2020-21ನೇ ಸಾಲಿನಲ್ಲಿ ಎಷ್ಟೆಷ್ಟು ಅನುದಾನವನ್ನು ಯಾವ ಯಾವ ಯೋಜನೆ ಅಡಿಯಲ್ಲಿ ಬಿಡುಗಡೆ ಮಾಡಲಾಗಿದೆ? (ವಿವರ ನೀಡುವುದು)	ಹುಬ್ಬಳ್ಳಿ ಧಾರವಾಡ ಪೂರ್ವ ಮತಕ್ಷೇತ್ರ 2018-19, 2019-20, 2020-21ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನದ ವಿವರ ಈ ಕೆಳಕಂಡಂತಿರುತ್ತದೆ.

ಪಶುಸಂಗೋಪನೆ ಇಲಾಖೆಯಿಂದ ಅನುಷ್ಠಾನಗೊಂಡಿರುವ ಯೋಜನೆಗಳ ಕ್ಷೇತ್ರವಾರು ಮಾಹಿತಿ

ಕ್ರಸಂ	ಜಿಲ್ಲೆಯ ಹೆಸರು	ಕಾರ್ಯಕ್ರಮ (ಒದಗಿಸಲಾದ ಸವಲತ್ತು)	ಬಿಡುಗಡೆ ಮಾಡಲಾದ ಅನುದಾನ (ರೂ.ಲಕ್ಷಗಳಲ್ಲಿ)
1	ಧಾರವಾಡ	ಹಾಲು ಉತ್ಪಾದಕರ ಉತ್ತೇಜನ ವಿಶೇಷ ಘಟಕ ಹೈನುಗಾರಿಕೆ	3.60
2	ಧಾರವಾಡ	ಹಾಲು ಉತ್ಪಾದಕರ ಉತ್ತೇಜನ ಗಿರಿಜನ ಉಪಯೋಜನೆ ಹೈನುಗಾರಿಕೆ	0.90
3	ಧಾರವಾಡ	ಹಾಲು ಉತ್ಪಾದಕರ ಉತ್ತೇಜನ ವಿಶೇಷ ಘಟಕ ಯೋಜನೆ ಹೈನುಗಾರಿಕೆ	1.08
4	ಧಾರವಾಡ	ಹಾಲು ಉತ್ಪಾದಕರ ಉತ್ತೇಜನ ಗಿರಿಜನ ಉಪಯೋಜನೆ ಕರುಸಾಕಾಣಿಕೆ	0.54
5	ಧಾರವಾಡ	ಹಾಲು ಉತ್ಪಾದಕರ ಉತ್ತೇಜನ ಗಿರಿಜನ ವಿಶೇಷ ಘಟಕ ಯೋಜನೆ ಕರುಸಾಕಾಣಿಕೆ	6.00
6	ಧಾರವಾಡ	ಹಾಲು ಉತ್ಪಾದಕರ ಉತ್ತೇಜನ ಗಿರಿಜನ ಗಿರಿಯೋಜನೆ ಕರುಸಾಕಾಣಿಕೆ	4.20
7	ಧಾರವಾಡ	ಹಾಲು ಉತ್ಪಾದಕರ ಉತ್ತೇಜನ ಗಿರಿಜನ ವಿಶೇಷ ಘಟಕ ಯೋಜನೆ (ಜಾನುವಾರು ವಿಮೆ)	0.30
8	ಧಾರವಾಡ	ಹಾಲು ಉತ್ಪಾದಕರ ಉತ್ತೇಜನ ಗಿರಿಜನ ಉಪಯೋಜನೆ (ಜಾನುವಾರು ವಿಮೆ)	0.24
9	ಧಾರವಾಡ	ಮಹಿಳೆಯರಿಗಾಗಿ ಕಾರ್ಯಕ್ರಮ -ಸಾಮಾನ್ಯ (ಕರು ಸಾಕಾಣಿಕೆ)	0.27

10	ಧಾರವಾಡ	ಹಾಲು ಉತ್ಪಾದಕರ ಉತ್ತೇಜನ ಗಿರಿಜನ ಉಪಯೋಜನೆ (ಜಾನುವಾರು ವಿಮೆ)	
11	ಧಾರವಾಡ	ಮಹಿಳೆಯರಿಗಾಗಿ ಕಾರ್ಯಕ್ರಮ –ಗಿರಿಜನ ಉಪಯೋಜನೆ (ಕರುಸಾಕಾಣಿಕೆ)	0.27
12	ಧಾರವಾಡ	ಮಹಿಳೆಯರಿಗಾಗಿ ಕಾರ್ಯಕ್ರಮ – ಸಾಮಾನ್ಯ (ಕುರಿಸಾಕಾಣಿಕೆ)	0.40
13	ಧಾರವಾಡ	ಮಹಿಳೆಯರಿಗಾಗಿಕಾರ್ಯಕ್ರಮ –ವಿಶೇಷ ಘಟಕ (ಕುರಿಸಾಕಾಣಿಕೆ)	0.36
14	ಧಾರವಾಡ	ಮಹಿಳೆಯರಿಗಾಗಿ ಕಾರ್ಯಕ್ರಮ – ಗಿರಿಜನ ಉಪಯೋಜನೆ (ಕುರಿಸಾಕಾಣಿಕೆ)	0.12
15	ಧಾರವಾಡ	ಮಹಿಳೆಯರಿಗಾಗಿ ಕಾರ್ಯಕ್ರಮ – ಸಾಮಾನ್ಯ (ಹೈನುಗಾರಿಕೆ)	0.60
16	ಧಾರವಾಡ	ಪಶುಭಾಗ್ಯ ಕಾರ್ಯಕ್ರಮ – ವಿಶೇಷ ಘಟಕ (ಹೈನುಗಾರಿಕೆ)	1.80
17	ಧಾರವಾಡ	ಪಶುಭಾಗ್ಯ ಕಾರ್ಯಕ್ರಮ –ಗಿರಿಜನ ಉಪಯೋಜನೆ (ಹೈನುಗಾರಿಕೆ)	0.60
			21.69

2019–20 ಮತ್ತು 2020–21ನೇ ಸಾಲಿನಲ್ಲಿ ಅನುದಾನ ಒದಗಿಸಿರುವುದಿಲ್ಲ.

ಪಸಂಮೀ ಇ–22 ಸಲೆವಿ 2021

ಪ್ರಭು ಬಿ. ಚವ್ಹಾಣ್
ಪಶುಸಂಗೋಪನೆ ಸಚಿವರು,

ಕರ್ನಾಟಕ ಸರ್ಕಾರ

ಸಂಖ್ಯೆ: MWD 30 LMQ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 02-02-2021.

01
US
3/2/21

ಇವರಿಂದ,
ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

ಇವರಿಗೆ,
ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ
ಬೆಂಗಳೂರು.

ಮಾನ್ಯರೇ,

ವಿಷಯ : ಶ್ರೀ ಅಬ್ಬಯ್ಯ ಪ್ರಸಾದ್ (ಹುಬ್ಬಳ್ಳಿ-ಧಾರವಾಡ ಪೂರ್ವ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 358 ಉತ್ತರಿಸುವ ಬಗ್ಗೆ.

*****

ಶ್ರೀ ಅಬ್ಬಯ್ಯ ಪ್ರಸಾದ್ (ಹುಬ್ಬಳ್ಳಿ-ಧಾರವಾಡ ಪೂರ್ವ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 358 ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಗೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ

ತಮ್ಮ ವಿಶ್ವಾಸಿ,

(ಎಸ್.ಎಜಾಸ್ ಪಾಷ)
ಶಾಖಾಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	358
ಸದಸ್ಯರ ಹೆಸರು	:	ಶ್ರೀ ಅಬ್ಬಯ್ಯ ಪ್ರಸಾದ್ (ಹುಬ್ಬಳ್ಳಿ-ಧಾರವಾಡ ಪೂರ್ವ)
ಉತ್ತರಿಸಬೇಕಾದ ದಿನಾಂಕ	:	03-02-2021.
ಉತ್ತರಿಸುವ ಸಚಿವರು	:	ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ.	ಹುಬ್ಬಳ್ಳಿ-ಧಾರವಾಡ ಪೂರ್ವ ಮತ ಕ್ಷೇತ್ರದಲ್ಲಿ ಅಲ್ಪಸಂಖ್ಯಾತರಿಗೆ ಅನುಕೂಲವಾಗುವಂತೆ ಮೌಲಾನಾ ಆಜಾದ್ ಆಂಗ್ಲ ಮಾದರಿ ಉರ್ದು ಶಾಲೆ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	2017-18ನೇ ಸಾಲಿನಲ್ಲಿ 100 ಮೌಲಾನಾ ಆಜಾದ್ ಮಾದರಿ ಶಾಲೆಗಳು ಹಾಗೂ 2018-19 ನೇ ಸಾಲಿನಲ್ಲಿ 100 ಮೌಲಾನಾ ಆಜಾದ್ ಮಾದರಿ ಶಾಲೆಗಳನ್ನು ಸರ್ಕಾರವು ಮಂಜೂರು ಮಾಡಲಾಗಿದ್ದು, ರಾಜ್ಯಾದ್ಯಂತ ಒಟ್ಟು 200 ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಧಾರವಾಡ ಜಿಲ್ಲಾ ವ್ಯಾಪ್ತಿಯಲ್ಲಿ ಮೂರು ಶಾಲೆಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿವೆ. ಪ್ರಸಕ್ತ ಸಾಲಿನಲ್ಲಿ ಸರ್ಕಾರವು ಯಾವುದೇ ಮೌಲಾನಾ ಆಜಾದ್ ಮಾದರಿ ಶಾಲೆಯನ್ನು ಮಂಜೂರು ಮಾಡಿರುವುದಿಲ್ಲ. ಕ್ಷೇತ್ರ ಶಾಸಕರ ಶಿಫಾರಸ್ಸಿನ ಪ್ರಸ್ತಾವನೆಯನ್ನು ಈಗಾಗಲೇ ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿ ಸ್ವೀಕರಿಸಲಾಗಿದ್ದು, ಪರಿಶೀಲನೆ ಹಂತದಲ್ಲಿದೆ.
ಆ.	ಇದ್ದಲ್ಲಿ, ಯಾವಾಗ ಶಾಲೆ ಪ್ರಾರಂಭಿಸಲಾಗುವುದು;	2019-20 ನೇ ಸಾಲಿನಿಂದ ಇಲ್ಲಿಯವರೆಗೆ ಸರ್ಕಾರವು ಯಾವುದೇ ಮೌಲಾನಾ ಆಜಾದ್ ಮಾದರಿ ಶಾಲೆಯನ್ನು ಮಂಜೂರು ಮಾಡಿರುವುದಿಲ್ಲ.
ಇ.	ಇಲ್ಲಿಯವರೆಗೆ ಶಾಲೆಯನ್ನು ಸ್ಥಾಪಿಸದೇ ಇರಲು ಕಾರಣಗಳೇನು? (ವಿವರ ಒದಗಿಸುವುದು)	

ಸಂಖ್ಯೆ: **MWD 30 LMQ 2021**

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: MWD 23 LMQ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 02-02-2021.

ಇವರಿಂದ,

ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

ಇವರಿಗೆ,

ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ
ಬೆಂಗಳೂರು.

4/5 72 3/2/21

ಮಾನ್ಯರೇ,

ವಿಷಯ : ಶ್ರೀ ಅನಿಲ್ ಚಿಕ್ಕಮಾದು (ಹೆಚ್.ಡಿ.ಕೋಟೆ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 763 ಉತ್ತರಿಸುವ ಬಗ್ಗೆ.

*****

ಶ್ರೀ ಅನಿಲ್ ಚಿಕ್ಕಮಾದು (ಹೆಚ್.ಡಿ.ಕೋಟೆ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 763 ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಗೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ

ತಮ್ಮ ವಿಶ್ವಾಸಿ,

(ಎಂ.ಎ.ಮನ್ನೂರ)
ಶಾಖಾಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಕರ್ನಾಟಕ ವಿಧಾನಸಭೆ

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 763

2) ವಿಧಾನಸಭಾ ಸದಸ್ಯರ ಹೆಸರು : ಶ್ರೀ ಅನಿಲ್ ಚಿಕ್ಕಮಾದು (ಹೆಚ್.ಡಿ.ಕೋಟೆ)

3) ಉತ್ತರಿಸಬೇಕಾದ ದಿನಾಂಕ : 03-02-2021

4) ಉತ್ತರಿಸಬೇಕಾದ ಸಚಿವರು : ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ	ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ ಹಜ್ ಯಾತ್ರಾರ್ಥಿಗಳಿಗೆ ದೊರೆಯುವ ಸೌಲಭ್ಯಗಳು ಯಾವುವು: (ವಿವರ ನೀಡುವುದು)	ಕರ್ನಾಟಕ ರಾಜ್ಯ ಹಜ್ ಸಮಿತಿಯ ವತಿಯಿಂದ ಆಯ್ಕೆಯಾದ ಹಜ್ ಯಾತ್ರಿಕರಿಗಾಗಿ ಜಿಲ್ಲಾವಾರು ಚುಚ್ಚುಮದ್ದು / ಲಸಿಕೆ ಕಾರ್ಯಕ್ರಮಗಳನ್ನು ಮತ್ತು ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ರಾಜ್ಯ ಹಜ್ ಸಮಿತಿಯು ಹಜ್ ಯಾತ್ರಿಕರ ಸುಲಭ ಹಾಗೂ ಸುಖಕರ ಪ್ರಯಾಣಕ್ಕಾಗಿ ಹಜ್ ಕ್ಯಾಂಪ್‌ಗಳನ್ನು ಬೆಂಗಳೂರು ಮತ್ತು ಮಂಗಳೂರಿನಲ್ಲಿ ಆಯೋಜಿಸುತ್ತಿದ್ದು, ನಿಗದಿತ ಪ್ರಯಾಣದ ಮುನ್ನ ಕ್ಯಾಂಪ್‌ಗಳಿಗೆ ಆಗಮಿಸುವ ಎಲ್ಲಾ ಯಾತ್ರಿಕರಿಗೆ ವಿಮಾನ ನಿಲ್ದಾಣದಲ್ಲಿ ಸಿಗುವ ಎಲ್ಲಾ ರೀತಿಯ ಸೌಲಭ್ಯಗಳನ್ನು ಕ್ಯಾಂಪ್‌ಗಳಲ್ಲಿಯೇ ಕಲ್ಪಿಸಿ ಕೊಡಲಾಗುತ್ತದೆ. ವಿಮಾನ ನಿಲ್ದಾಣಗಳಿಂದ ನಿರ್ಗಮನ ಹಾಗೂ ಆಗಮನದ ಸಮಯದಲ್ಲಿ ಯಾತ್ರಿಕರಿಗೆ ಸಹಾಯ ಮತ್ತು ಸಹಕಾರ ನೀಡಲಾಗುವುದು. ಮುಂಬೈನ ಭಾರತೀಯ ಹಜ್ ಸಮಿತಿಯು ಕೇಂದ್ರ ಸರ್ಕಾರದ ಅಲ್ಪಸಂಖ್ಯಾತರ ಕಲ್ಯಾಣ ಮಂತ್ರಾಲಯದ ಸಹಮತಿ ಹಾಗೂ ಸಹಕಾರದೊಂದಿಗೆ ಹಜ್ ಯಾತ್ರಿಕರ ಪ್ರಯಾಣಕ್ಕಾಗಿ ಅನುವಾಗುವಂತೆ ಎಲ್ಲಾ ರೀತಿಯ ಸೌಕರ್ಯಗಳನ್ನು ಒದಗಿಸಲಾಗುತ್ತದೆ. ಭಾರತೀಯ ವಿದೇಶಾಂಗ ಸಚಿವಾಲಯ,

		ವಾಯುಯಾನ ಸಚಿವಾಲಯ ಹಾಗೂ ಅದಕ್ಕೆ ಸಂಬಂದಪಟ್ಟ ಸಂಸ್ಥೆಗಳು ಯಾತ್ರಿಕರ ಸುಖಕರ ಮತ್ತು ಸುಲಭವಾದ ಪ್ರಯಾಣಕ್ಕಾಗಿ ಮಹತ್ತರವಾದ ಹೊಣೆಗಾರಿಕೆಯನ್ನು ಹೊಂದಿದ್ದು, ಯಾತ್ರಿಕರ ವಿಮಾನ ಯಾನ ಸೌಕರ್ಯ, ಔಷದೋಪಚಾರ, ವಿದೇಶಿ ವಿನಿಮಯ, ಹಾಗೂ ಇನ್ನೀತರೆ ಎಲ್ಲಾ ವಿಧಧ ಸೌಕರ್ಯಗಳನ್ನು ನೀಡಲಾಗುತ್ತಿದ್ದು, ಸೌಧಿ ಅರೇಬಿಯಾದಲ್ಲಿರುವ ಭಾರತೀಯ ಧೂತವಾಸದ ಸಹಕಾರದೊಂದಿಗೆ ಯಾತ್ರಿಕರ ವಸತಿ, ಪ್ರಯಾಣದ ಸೌಲಭ್ಯಗಳು, ಔಷದೋಪಚಾರ ಹಾಗೂ ಇನ್ನೀತರೆ ಎಲ್ಲಾ ರೀತಿಯ ಸೌಕರ್ಯಗಳನ್ನು ನೀಡಲಾಗುತ್ತದೆ.
ಆ	2020ರ ಹಜ್ ಯಾತ್ರೆಗೆ ಸಂಬಂಧಿಸಿದಂತೆ ಹಜ್ ಸಮಿತಿಗೆ ಸ್ವೀಕೃತಗೊಂಡಿರುವ ಅರ್ಜಿಗಳು ಎಷ್ಟು; ಎಷ್ಟು ಯಾತ್ರಾರ್ಥಿಗಳಿಗೆ ಹೋಗಲು ಅವಕಾಶವಿದೆ; ಯಾತ್ರಾರ್ಥಿಗಳನ್ನು ಯಾವ ರೀತಿ ಆಯ್ಕೆ ಮಾಡಲಾಗುವುದು:	2020-21 ನೇ ಸಾಲಿನಲ್ಲಿ ದಿನಾಂಕ 10-01-2020 ರಂದು ನಡೆದ ಆನ್-ಲೈನ್ ಕಂಪ್ಯೂಟರೀಕರಣದಿಂದ ಜಿಲ್ಲಾವಾರು ಖುರ್ರಾದ (ಲಾಟರಿ) ಮೂಲಕ 6734 ಯಾತ್ರಿಕರ ಆಯ್ಕೆ ನಡೆದಿದ್ದು, ಇಡೀ ವಿಶ್ವದಲ್ಲಿ ಕೋವಿಡ್ ವೈರಸ್ ವ್ಯಾಪಕವಾಗಿ ಹರಡಿರುವುದರಿಂದ, ಸೌದಿ ಅರೇಬಿಯಾ ಸರ್ಕಾರವು ಅಂತರಾಷ್ಟ್ರೀಯ ಯಾತ್ರಿಕರಿಗೆ ಹಜ್‌ಗಾಗಿ ಅವಕಾಶವಿಲ್ಲವೆಂದು ತಿಳಿಸಿರುವುದರಿಂದ, ಮುಂಬೈನ ಭಾರತೀಯ ಹಜ್ ಸಮಿತಿಯು ಹಜ್-2020 ಗಾಗಿ ಆಯ್ಕೆಯಾಗಿದ್ದ ಅರ್ಜಿದಾರರ ಅರ್ಜಿಗಳನ್ನು ರದ್ದುಪಡಿಸಿ, ಯಾತ್ರೆಗಾಗಿ ಅರ್ಜಿದಾರರು ಪಾವತಿಸಿದ ಮುಂಗಡ ಮೊತ್ತವನ್ನು ಈಗಾಗಲೇ ಮರುಪಾವತಿಸಲಾಗಿರುತ್ತದೆ
ಇ	ಹಾಗಿದ್ದಲ್ಲಿ, ಈ ಬಾರಿ ಎಷ್ಟು ಯಾತ್ರಾರ್ಥಿಗಳನ್ನು ಆಯ್ಕೆ ಮಾಡಲಾಗಿದೆ; ಬಾಕಿ ಇರುವ ಯಾತ್ರಾರ್ಥಿಗಳನ್ನು ಆಯ್ಕೆ ಮಾಡದೇ ಇರಲು ಕಾರಣಗಳೇನು ಹಾಗೂ ಬಾಕಿ ಯಾತ್ರಾರ್ಥಿಗಳನ್ನು ಯಾವಾಗ ಆಯ್ಕೆ ಮಾಡಲಾಗುವುದು:	ಮುಂಬೈನ ಭಾರತೀಯ ಹಜ್ ಸಮಿತಿಯು ಕೇಂದ್ರದ ಅಲ್ಪಸಂಖ್ಯಾತರ ಕಲ್ಯಾಣ ಮಂತ್ರಾಲಯದ ಸಹಮತಿಯೊಂದಿಗೆ ಯಾವುದೇ ನಿರ್ಣಯ ತೆಗೆದುಕೊಳ್ಳ ಬೇಕಾಗಿರುತ್ತದೆ, ಹಜ್ 2021 ನೇ ಸಾಲಿಗಾಗಿ ರಾಜ್ಯದಿಂದ ಸುಮಾರು 2300 ಅರ್ಜಿಗಳು ಸ್ವೀಕೃತವಾಗಿರುತ್ತವೆ.
ಈ	ಖಾಸಗಿ ಟೂರ್ ಆಪರೇಟರ್‌ಗಳು ಹಜ್ ಯಾತ್ರಾರ್ಥಿಗಳಿಗೆ ಮೋಸ ಮಾಡುವ ಸಂಬಂಧ ಮುಂಜಾಗ್ರತೆಯಾಗಿ ಅಗತ್ಯ ಸುರಕ್ಷತಾ ಕ್ರಮ ವಹಿಸಲು ಸರ್ಕಾರ ಯಾವ ರೀತಿ ಕ್ರಮವಹಿಸುತ್ತಿದೆ;	ಭಾರತ ಸರ್ಕಾರದ ಅಲ್ಪಸಂಖ್ಯಾತರ ಕಲ್ಯಾಣ ಮಂತ್ರಾಲಯವು ಪ್ರತ್ಯೇಕವಾಗಿ ಖಾಸಗಿ ಟೂರ್ ಆಪರೇಟರ್‌ಗಳ ಕಾರ್ಯನೀತಿಯನ್ನು ಹೊರಡಿಸಿದ್ದು, ಇದರಲ್ಲಿ ರಾಜ್ಯ ಹಜ್ ಸಮಿತಿಗಳ ಯಾವುದೇ ಪಾತ್ರವಿರುವುದಿಲ್ಲ. ಆದಾಗ್ಯೂ,

		ಇಂತಹ ಪ್ರಕರಣಗಳು ರಾಜ್ಯ ಹಜ್ ಸಮಿತಿಯ ಗಮನಕ್ಕೆ ಬಂದಲ್ಲಿ, ಅವುಗಳನ್ನು ಭಾರತೀಯ ಹಜ್ ಸಮಿತಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗುತ್ತದೆ.
ಉ	ಖಾಸಗಿ ಟೂರ್ ಆಪರೇಟರ್‌ಗಳನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)	ಅನ್ವಯಿಸುವುದಿಲ್ಲ.

ಸಂಖ್ಯೆ:MWD 23 LMQ2021

(ಆನಂದ್ ಸಿಂಗ್)
ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ
ಹಾಗೂ ಹಜ್ ಮತ್ತು ವಕ್ಫ್ ಸಚಿವರು

ಕರ್ನಾಟಕ ಸರ್ಕಾರ

ಸಂ: ಟಿಡಿ 35 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:02.02.2021.

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

4/ 36 3/2/21

ಇವರಿಗೆ:

ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಬಸವನಗೌಡ ದದ್ದಲ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 748 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಬಸವನಗೌಡ ದದ್ದಲ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 748 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Mala S 02/02/2021

(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 748
ಸದಸ್ಯರ ಹೆಸರು	: ಶ್ರೀ ಬಸವನಗೌಡ ದದ್ದಲ (ರಾಯಚೂರು ಗ್ರಾಮಾಂತರ)
ಉತ್ತರಿಸುವ ಸಚಿವರು	: ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ	: 03-02-2021

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ರಾಯಚೂರು ಗ್ರಾಮೀಣ ವಿಧಾನ ಸಭಾ ಕ್ಷೇತ್ರದ ಎನ್.ಇ.ಕೆ.ಆರ್.ಟಿ.ಸಿ (ಈಶಾನ್ಯ ಸಾರಿಗೆ ಸಂಸ್ಥೆ) ಉಪ ಘಟಕದಲ್ಲಿ ಎಷ್ಟು ವಾಹನಗಳಿವೆ; ಅವುಗಳಲ್ಲಿ ಎಷ್ಟು ವಾಹನಗಳು ಉತ್ತಮ ವ್ಯವಸ್ಥೆಯಲ್ಲಿವೆ (ವಿವರ ನೀಡುವುದು);	ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ರಾಯಚೂರು ಗ್ರಾಮೀಣ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ಎರಡು ಘಟಕಗಳಲ್ಲಿರುವ ವಾಹನಗಳ ಸಂಖ್ಯೆ, ಅವುಗಳ ಸ್ಥಿತಿ, ಘಟಕವಾರು ಮಾಹಿತಿ ಈ ಕೆಳಗಿನಂತಿದೆ: 1. ರಾಯಚೂರು ಘಟಕ-2ರಲ್ಲಿ 109 ವಾಹನಗಳು ಇದ್ದು, ಈ ಪೈಕಿ 106 ವಾಹನಗಳು ಉತ್ತಮ ಸ್ಥಿತಿಯಲ್ಲಿವೆ. ಉಳಿದ 03 ವಾಹನಗಳ ದುರಸ್ತಿ ಕಾರ್ಯ ಪ್ರಗತಿಯಲ್ಲಿರುತ್ತದೆ. 2. ರಾಯಚೂರು ಘಟಕ-3ರಲ್ಲಿ 116 ವಾಹನಗಳು ಇದ್ದು, ಈ ಪೈಕಿ 109 ವಾಹನಗಳು ಉತ್ತಮ ಸ್ಥಿತಿಯಲ್ಲಿದ್ದು, ಉಳಿದ 07 ವಾಹನಗಳ ದುರಸ್ತಿ ಕಾರ್ಯ ಪ್ರಗತಿಯಲ್ಲಿರುತ್ತದೆ.
ಆ)	ರಾಯಚೂರು ಗ್ರಾಮೀಣ ಘಟಕದ ವಾಹನಗಳನ್ನು ಸಂಚಾರ ಮಾಡಿಸುತ್ತಿರುವುದರಿಂದ ಪ್ರಯಾಣಿಕರಿಗೆ ಸಮಸ್ಯೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಂಡಿದೆ (ವಿವರ ನೀಡುವುದು);	ಮೇಲಿನ ಉಪ ಪ್ರಶ್ನೆ 'ಅ'ರಲ್ಲಿ ಉತ್ತರಿಸಿರುವಂತೆ ಉತ್ತಮ ಸ್ಥಿತಿಯ ವಾಹನಗಳು ರಾಯಚೂರು ಗ್ರಾಮೀಣ ಘಟಕಗಳಲ್ಲಿ ಕಾರ್ಯಾಚರಿಸುತ್ತಿರುವುದರಿಂದ ಪ್ರಯಾಣಿಕರಿಗೆ ಸಮಸ್ಯೆಯಾಗಿರುವುದಿಲ್ಲ.
ಇ)	ರಾಯಚೂರು ಗ್ರಾಮೀಣ ಘಟಕಕ್ಕೆ ಹೊಸ ಬಸ್ಸುಗಳನ್ನು ನೀಡುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ, ಯಾವಾಗ ನೀಡಲಾಗುವುದು? (ಸಂಪೂರ್ಣ ವಿವರ ನೀಡುವುದು)	ಪ್ರಸ್ತುತ ಕೋವಿಡ್-19ರ ಹಿನ್ನೆಲೆಯಲ್ಲಿ ಸಂಸ್ಥೆಯಲ್ಲಿ ಬಸ್ಸುಗಳು ಸಹಜ ಕಾರ್ಯಾಚರಣೆಗೊಳ್ಳದೇ ಇದ್ದು, ಸಂಸ್ಥೆಯು ಆರ್ಥಿಕ ಸಂಕಷ್ಟದಲ್ಲಿರುವುದರಿಂದ, ಪ್ರಸಕ್ತ ಸಾಲಿನಲ್ಲಿ ಹೊಸ ಬಸ್ಸುಗಳ ಖರೀದಿಯನ್ನು ಕೈಬಿಡಲಾಗಿರುತ್ತದೆ. ಹೊಸ ಬಸ್ಸುಗಳ ಖರೀದಿ ಪ್ರಕ್ರಿಯೆಗೆ ಚಾಲನೆ ನೀಡಿದ ನಂತರ ಘಟಕದ ಅವಶ್ಯಕತೆಗನುಗುಣವಾಗಿ ಹೊಸ ಬಸ್ಸುಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ಟಿಡಿ 35 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ಸರಕಾರ

ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ

ಕಂದಾಯ ಇಲಾಖೆ

ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು–560 009. ದೂರವಾಣಿ ಸಂಖ್ಯೆ: 080–22232040/22232012

ಸಂಖ್ಯೆ: DSSP/LAQ-8/2021

ದಿನಾಂಕ: 02.02.2021

149
3/2/21

ಗೆ,

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ,
ವಿಧಾನ ಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನಸಭೆಯ ಸದಸ್ಯರಾದ ಶ್ರೀಮತಿ ಸೌಮ್ಯ ರೆಡ್ಡಿ (ಜಯನಗರ) ರವರ ಚುಕ್ಕೆ ಗುರುತಿಲ್ಲದ ಪ್ರ.ಸಂ. 646ಕ್ಕೆ ಉತ್ತರಿಸುವ ಕುರಿತು.

ಉಲ್ಲೇಖ: ಕಾರ್ಯದರ್ಶಿಗಳು, ಕರ್ನಾಟಕ ವಿಧಾನಸಭೆ, ಬೆಂಗಳೂರು ರವರ ಪತ್ರ ಸಂಖ್ಯೆ: ಪ್ರಶಾವಿಸ/15ನೇವಿಸ/9ಅ/ಪ್ರ.ಸಂ. 646/2021, ದಿನಾಂಕ 23.01.2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ವಿಧಾನಸಭೆಯ ಸದಸ್ಯರಾದ ಶ್ರೀಮತಿ ಸೌಮ್ಯ ರೆಡ್ಡಿ (ಜಯನಗರ) ರವರ ಪ್ರ.ಸಂ. 646 ಕ್ಕೆ ಕೋರಿರುವ ಪ್ರಶ್ನೆಗೆ ಈ ನಿರ್ದೇಶನಾಲಯಕ್ಕೆ ಸಂಬಂಧಿಸಿದ ಉತ್ತರವನ್ನು ಸಿದ್ದಪಡಿಸಿ 50 ಪ್ರತಿಗಳಲ್ಲಿ ಈ ಪತ್ರದೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

K. Kamala

ತಹಸೀಲ್ದಾರ್,
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ
ನಿರ್ದೇಶನಾಲಯ, ಕಂದಾಯ ಇಲಾಖೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ		646
ಸದಸ್ಯರ ಹೆಸರು		ಶ್ರೀಮತಿ ಸೌಮ್ಯರೆಡ್ಡಿ (ಜಯನಗರ)
ವಿಷಯ		ಹಿರಿಯ ನಾಗರಿಕರ ಪಿಂಚಣಿ
ಉತ್ತರಿಸಬೇಕಾದ ದಿನಾಂಕ		3/2/2021
ಉತ್ತರಿಸುವ ಸಚಿವರು		ಕಂದಾಯ ಸಚಿವರು
ಪ್ರಶ್ನೆ		ಉತ್ತರ
ಅ	ಫೆಬ್ರವರಿ 2020 ರಿಂದ ಇಲ್ಲಿಯವರೆಗೆ ವೃದ್ಧರ ಪಿಂಚಣಿಗಳನ್ನು ನೀಡದೆ ಹಿರಿಯ ನಾಗರಿಕರು ಕಷ್ಟಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ರಾಜ್ಯದಲ್ಲಿ ಜಾರಿಯಲ್ಲಿರುವ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಮಾಸಿಕ ಪಿಂಚಣಿ ವಿತರಣಾ ವ್ಯವಸ್ಥೆಯನ್ನು ಸಮರ್ಪಕವಾಗಿ ಹಾಗೂ ಪಾರದರ್ಶಕವಾಗಿ ನಿರ್ವಹಿಸುವಲ್ಲಿ ಖಜಾನೆ-2 ಯೋಜನೆಯನ್ನು ರಾಜ್ಯಾದ್ಯಂತ ಜಾರಿಗೊಳಿಸಲಾಗಿದೆ. ಖಜಾನೆ-2 ಯೋಜನೆಯು ಸುಭದ್ರ, ಪಾರದರ್ಶಕ ಹಾಗೂ ನಿಖರ ವ್ಯವಸ್ಥೆಯಾಗಿರುವ ಹಿನ್ನೆಲೆಯಲ್ಲಿ ಖಜಾನೆ-1 ವ್ಯವಸ್ಥೆಯನ್ನು ಜನವರಿ -2020 ರಿಂದ ಸಂಪೂರ್ಣವಾಗಿ ಸ್ಥಗಿತಗೊಳಿಸಿ, ಈ ವ್ಯವಸ್ಥೆಯಡಿ ಪಿಂಚಣಿ ಪಡೆಯುತ್ತಿದ್ದ ಫಲಾನುಭವಿಗಳ ಮಾಹಿತಿಯನ್ನು ಸಹ ಕಡ್ಡಾಯ ವಿವರಗಳೊಂದಿಗೆ ಅನುಕಲನೆ ಮೂಲಕ ಖಜಾನೆ-2 ತಂತ್ರಾಂಶಕ್ಕೆ ವರ್ಗಾಯಿಸಲಾಗುತ್ತಿದೆ. ಅಗತ್ಯ ಮಾಹಿತಿ ಲಭ್ಯವಾಗದ ಪ್ರಕರಣಗಳಲ್ಲಿ ಪಿಂಚಣಿ ವ್ಯತ್ಯಾಯವಾಗಿದ್ದು, ಈ ಪ್ರಕರಣಗಳನ್ನು ಕಡ್ಡಾಯವಾಗಿ ಭೌತಿಕ ಪರಿಶೀಲನೆಗೆ ಒಳಪಡಿಸಿ, ಮಾಹಿತಿ ಸಂಗ್ರಹಣೆಯೊಂದಿಗೆ ಪಿಂಚಣಿ ಪಾವತಿಗೆ ಕ್ರಮವಹಿಸಲಾಗುತ್ತಿದೆ. ಕೆಲವು ಪ್ರಕರಣಗಳಲ್ಲಿ ಫಲಾನುಭವಿಗಳ ಬ್ಯಾಂಕ್ ಖಾತೆ ವಿವರ/ IFSC CODE / PINCODE ಮಾಹಿತಿಯನ್ನು ನಿಖರವಾಗಿ ನೀಡದೆ ಇರುವ ಕಾರಣ NO SUCH ACCOUNT/ INVALID BANK DETAILS ಮತ್ತು INVALID ADDRESS ಕಾರಣದಿಂದ ಪಿಂಚಣಿ ಸ್ಥಗಿತಗೊಂಡಿದ್ದು, ಈ ಬಗ್ಗೆ ಪರಿಶೀಲಿಸಿ ಬ್ಯಾಂಕ್ ಖಾತೆ ವಿವರ ಹಾಗೂ ವಿಳಾಸ ನ್ಯೂನತೆಯನ್ನು ಸರಿಪಡಿಸಲು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿದೆ. ಫಲಾನುಭವಿಗಳು ಅಗತ್ಯ ಮಾಹಿತಿ ನೀಡಿದಲ್ಲಿ ನ್ಯೂನತೆಯನ್ನು ಸರಿಪಡಿಸಿ ತಂತ್ರಾಂಶದಲ್ಲಿ ತಹಸೀಲ್ದಾರರು ಅನುಮೋದನೆ ನೀಡಿದ ನಂತರ ಸರಿಪಡಿಸಲಾದ ಮಾಹಿತಿಯನ್ನು ಖಜಾನೆಗೆ ಅನುಕಲನೆ ಮೂಲಕ ವರ್ಗಾಯಿಸಿ ತ್ವರಿತವಾಗಿ ಪಿಂಚಣಿ ಪಾವತಿಗೆ ಕ್ರಮವಹಿಸಲಾಗುತ್ತಿದೆ.

ಆ	ಇತರೆ ರಾಜ್ಯಗಳಲ್ಲಿ ರೂ.2200-2500ಗಳ ವರೆಗೆ ವೃದ್ಧರು ಪಿಂಚಣಿಯನ್ನು ನೀಡುತ್ತಿದ್ದು ನಮ್ಮ ರಾಜ್ಯದಲ್ಲಿ ಕೇವಲ ರೂ.600-1200 ಗಳು ನೀಡಲಾಗುತ್ತಿರುವುದರಿಂದ ವೃದ್ಧರ ಪಿಂಚಣಿಯನ್ನು ಹೆಚ್ಚಿಸಲು ಚಿಂತನೆ ನಡೆಸಿದೆಯೇ (ವಿವರ ನೀಡುವುದು)	ರಾಜ್ಯದಲ್ಲಿ ವೃದ್ಧಾಪ್ಯ ವೇತನ ಹಾಗೂ ಸಂಧ್ಯಾ ಸುರಕ್ಷಾ ಯೋಜನೆಗಳಡಿ 40.45 ಲಕ್ಷ ವೃದ್ಧರಿಗೆ ರೂ.4822 ಕೋಟಿ ಅನುದಾನದೊಂದಿಗೆ ಪಿಂಚಣಿ ಸೌಲಭ್ಯ ಒದಗಿಸಲಾಗುತ್ತಿದ್ದು, ಹಾಗೂ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ 67.77 ಲಕ್ಷ ಫಲಾನುಭವಿಗಳಿಗೆ ರೂ.7500 ಕೋಟಿ ಅನುದಾನ ಒದಗಿಸಿ ಸಾಮಾಜಿಕ ಭದ್ರತೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. 60 ರಿಂದ 65 ವರ್ಷ ಒಳಗಿರುವ ವೃದ್ಧರಿಗೆ ರೂ.600 ಗಳ ಪಿಂಚಣಿ ಸೌಲಭ್ಯ ಒದಗಿಸುತ್ತಿದ್ದು, 65 ವರ್ಷ ಮೇಲ್ಪಟ್ಟ ವೃದ್ಧರಿಗೆ ಸಂಧ್ಯಾ ಸುರಕ್ಷಾ ಯೋಜನೆಯಡಿ ರೂ.1000/- ಗಳ ಪಿಂಚಣಿ ನೀಡಲಾಗುತ್ತಿದೆ. ವಿವಿಧ ಯೋಜನೆಗಳಡಿ ಪಿಂಚಣಿ ಪಡೆಯುತ್ತಿರುವ 65 ವರ್ಷ ದಾಟಿದ ವೃದ್ಧರನ್ನು ಗುರುತಿಸಲು ಹಾಗೂ ಸ್ವಯಂ ಪ್ರೇರಿತವಾಗಿ ಪಿಂಚಣಿ ಹೆಚ್ಚಳಕ್ಕೆ ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿದೆ. "ಮನೆ ಬಾಗಿಲಿಗೆ ಮಾಸಾಶನ" ಸ್ವಯಂ ಪ್ರೇರಿತವಾಗಿ ಪಿಂಚಣಿ ಮಂಜೂರು ಅಭಿಯಾನದಡಿ 60 ವರ್ಷ ಮೇಲ್ಪಟ್ಟ ವೃದ್ಧರನ್ನು ಗುರುತಿಸಿ ಪಿಂಚಣಿ ಸೌಲಭ್ಯ ಒದಗಿಸುವ ಕಾರ್ಯವನ್ನು ಜಾರಿಗೊಳಿಸಲಾಗಿದೆ.

ಸಂಖ್ಯೆ : ಡಿಎಸ್‌ಎಸ್‌ಪಿ - ಎಲ್‌ಎಕ್ಯೂ 8/2021

[ಆರ್. ಅಶೋಕ]
ಕಂದಾಯ ಸಚಿವರು

ಕರ್ನಾಟಕ ಸರ್ಕಾರ

ಸಂ: ಟಿಡಿ 17 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:03.02.2021.

40 4/5
03/02/2021

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

ಇವರಿಗೆ:

ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಡಾ|| ಭರತ್ ಶೆಟ್ಟಿ ವೈ., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 574 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಡಾ|| ಭರತ್ ಶೆಟ್ಟಿ ವೈ., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 574 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Mala S 03/02/2021
(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 574

ಸದಸ್ಯರ ಹೆಸರು : ಡಾ|| ಭರತ್ ಶೆಟ್ಟಿ ವೈ. (ಮಂಗಳೂರು ನಗರ ಉತ್ತರ)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 03-02-2021

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ಮಂಗಳೂರು ಜಿಲ್ಲೆಯಲ್ಲಿ ಒಟ್ಟು ಎಷ್ಟು ಸಾರಿಗೆ ಬಸ್ ಘಟಕಗಳು ಇದೆ; ಕಳೆದ 2 ವರ್ಷಗಳಿಂದ ಈ ಘಟಕಗಳಿಗೆ ನೀಡಿದ ಅನುದಾನವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)</td><td>ಮಂಗಳೂರು ಜಿಲ್ಲೆಯಲ್ಲಿ ಒಟ್ಟು 6 ಸಾರಿಗೆ ಬಸ್ ಘಟಕಗಳಿದ್ದು, ವಿವರ ಈ ಕೆಳಕಂಡಂತಿದೆ:
1. ಮಂಗಳೂರು-ಘಟಕ 1
2. ಮಂಗಳೂರು -ಘಟಕ 2
3. ಬಿ.ಸಿ.ರಸ್ತೆ ಘಟಕ
4. ಧರ್ಮಸ್ಥಳ ಘಟಕ
5. ಪುತ್ತೂರುಘಟಕ
6. ಸುಳ್ಯ ಘಟಕ
ಕಳೆದ 2 ವರ್ಷಗಳಿಂದ ಸದರಿ ಘಟಕಗಳಿಗೆ ನೀಡಿರುವ ತಾಲ್ಲೂಕುವಾರು ಅನುದಾನದ ವಿವರ ಈ ಕೆಳಕಂಡಂತಿದೆ:
(ರೂ.ಲಕ್ಷಗಳಲ್ಲಿ)
<table>
<tr><th>ಕಾಮಗಾರಿ</th><th>ತಾಲ್ಲೂಕು</th><th>2018-19</th><th>2019-20</th></tr>
<tr><td>ಧರ್ಮಸ್ಥಳ ಬಸ್ ಘಟಕವನ್ನು ಮೇಲ್ದರ್ಜೆಗೇರಿಸುವುದು</td><td>ಬೆಳ್ತಂಗಡಿ</td><td>30.00</td><td>120.00</td></tr>
<tr><td>ಧರ್ಮಸ್ಥಳ ಬಸ್ ಘಟಕದಲ್ಲಿ ಸಿಬ್ಬಂದಿ ವಸತಿಗೃಹಗಳ ಅಭಿವೃದ್ಧಿ ಕಾಮಗಾರಿಗಳು</td><td>ಬೆಳ್ತಂಗಡಿ</td><td>40.00</td><td>40.00</td></tr>
<tr><td>ಸುಳ್ಯ ಘಟಕದ ನಿಲುಗಡೆ ಆವರಣಕ್ಕೆ ಕಾಂಕ್ರೀಟು ಒದಗಿಸುವುದು</td><td>ಸುಳ್ಯ</td><td>100.00</td><td>-</td></tr>
<tr><td></td><td>ಒಟ್ಟು</td><td>170.00</td><td>160.00</td></tr>
</table></td></tr>
<tr><td>ಆ.</td><td>ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್ ನಿಲ್ದಾಣ ಆವರಣದಲ್ಲಿ ಸರ್ಕಾರಿ ಸ್ವಾಮ್ಯದ ಎಷ್ಟು ಮಳಿಗೆಗಳಿವೆ ಮತ್ತು ಇವುಗಳ ಬಾಡಿಗೆಯನ್ನು ಯಾವ ಆಧಾರದ ಮೇಲೆ ನೀಡಲಾಗುತ್ತದೆ?</td><td>ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವ್ಯಾಪ್ತಿಯ ಬಸ್ ನಿಲ್ದಾಣಗಳ ಆವರಣದಲ್ಲಿ ಸರ್ಕಾರಿ ಸ್ವಾಮ್ಯದ ಮಳಿಗೆಗಳು ಇರುವುದಿಲ್ಲ.
ಆದರೆ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಸ್ವಾಮ್ಯದ ಬಸ್ ನಿಲ್ದಾಣಗಳಲ್ಲಿ ಒಟ್ಟು 1103 ಮಳಿಗೆಗಳು ಚಾಲ್ತಿಯಲ್ಲಿರುತ್ತವೆ. ಇವುಗಳ ಬಾಡಿಗೆಗಳನ್ನು ಕೆಳಕಂಡ ಮಾನದಂಡಗಳನ್ನು ಅನುಸರಿಸಿ ನೀಡಲಾಗುತ್ತಿದೆ:
I. ಪಿಡಬ್ಲೂಡಿ ಮಾರ್ಗಸೂಚಿಗಳನ್ವಯ ಸರ್ಕಾರಿ ಕಛೇರಿಗಳಿಗೆ ಮಾಸಿಕ ಪರವಾನಗಿ ಶುಲ್ಕವನ್ನು(ಬಾಡಿಗೆ) ನಿಗಧಿಪಡಿಸಿ ನೀಡಲಾಗುತ್ತದೆ.</td></tr>
</table>

2. ಕೆ.ಎಂ.ಎಫ್ / ಹಾಪ್‌ಕಾಮ್ಸ್ ಮಳಿಗೆಗಳಿಗೆ ಅನ್ವಯಿಸಿ, ಗುರುತಿಸಿದ ತೆರೆದ ಸ್ಥಳ /ಮಳಿಗೆಯ ಹತ್ತಿರದ 6 ಮಳಿಗೆಗಳ ಒಟ್ಟಾರೆ ವಿಸ್ತೀರ್ಣ ಮತ್ತು ಒಟ್ಟಾರೆ ಪರವಾನಗಿ ಶುಲ್ಕದ ಲೆಕ್ಕಾಚಾರದಂತೆ ಆಗುವ ಸರಾಸರಿ ಮಾಸಿಕ ಪರವಾನಗಿ ಶುಲ್ಕದಲ್ಲಿ ಶೇ.20ರಷ್ಟು ರಿಯಾಯಿತಿ ಪರಿಗಣಿಸಿ, ಮಾಸಿಕ ಪರವಾನಗಿ ಶುಲ್ಕವನ್ನು ನಿಗದಿಪಡಿಸಿ ನೀಡಲಾಗುತ್ತದೆ.
3. ಎಟಿಎಂ ಕೌಂಟರ್‌ಗಳಿಗೆ ಸಂಬಂಧಿಸಿ, ಕೆಳಕಂಡಂತೆ ಪ್ರತಿಚದರಡಿಗೆ ಮಾಸಿಕ ಪರವಾನಗಿ ಶುಲ್ಕ ನಿಗದಿಪಡಿಸಿ ನೀಡಲಾಗುತ್ತದೆ.

ಕ್ರ.ಸಂ.	ಬಸ್ ನಿಲ್ದಾಣ	ಪ್ರತಿಚದರಡಿಗೆ ನಿಗದಿಪಡಿಸಿರುವ ದರ
1	ಬೆಂಗಳೂರು ವ್ಯಾಪ್ತಿಯ	ರೂ.200/–
2	ಮೈಸೂರು ನಗರ ವ್ಯಾಪ್ತಿಯ	ರೂ.175/–
3	ಇತರೆ ಜಿಲ್ಲಾ ಕೇಂದ್ರಗಳು	ರೂ.150/–
4	ತಾಲ್ಲೂಕು ಕೇಂದ್ರಗಳು	ರೂ.100/–
5	ಹೋಬಳಿ / ಇತರೆ ಸ್ಥಳ	ರೂ.75/–

4. ಖಾಸಗಿಯವರಿಗೆ ಮಳಿಗೆಗಳನ್ನು ಇ–ಟೆಂಡರ್ / ಸಂಧಾನದ ಮುಖಾಂತರ ಪರವಾನಗಿದಾರರನ್ನು ಆಯ್ಕೆಗೊಳಿಸಿ ಹಂಚಿಕೆ ಮಾಡಲಾಗುತ್ತಿದೆ.

ಸಂಖ್ಯೆ: ಟಿಡಿ 17 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: MWD 28 LMQ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 02-02-2021.

21
ULS
3/2/21

ಇವರಿಂದ,

ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

ಇವರಿಗೆ,

ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ
ಬೆಂಗಳೂರು.

ಮಾನ್ಯರೇ,

ವಿಷಯ : ಶ್ರೀ ಆನಂದ್ ಸಿದ್ದು ನ್ಯಾಮಗೌಡ (ಜಮಖಂಡಿ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 738 ಉತ್ತರಿಸುವ ಬಗ್ಗೆ.

*****

ಶ್ರೀ ಆನಂದ್ ಸಿದ್ದು ನ್ಯಾಮಗೌಡ (ಜಮಖಂಡಿ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 738 ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಗೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ

ತಮ್ಮ ವಿಶ್ವಾಸಿ,

(ಎಸ್.ಎಜಾಸ್ ಪಾಷ)
ಶಾಖಾಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	– 738
ಉತ್ತರಿಸಬೇಕಾದ ದಿನಾಂಕ	– 03-02-2021
ಸದಸ್ಯರ ಹೆಸರು	– ಶ್ರೀ.ಆನಂದ್ ಸಿದ್ದು ನ್ಯಾಮಗೌಡ (ಜಮಖಂಡಿ)
ಉತ್ತರಿಸುವ ಸಚಿವರು	– ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

<table>
<tr><th>ಕ್ರ.
ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>2019-20 ಮತ್ತು 2020-21ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಶಾದಿಮಹಲ್ ನಿರ್ಮಾಣ, ಸಮುದಾಯಭವನ ನಿರ್ಮಾಣ ಮಾಡಲು ಮಂಜೂರಾದ ಅನುದಾನವೆಷ್ಟು (ಬಾಗಲಕೋಟೆ ಜಿಲ್ಲೆ ಮತಕ್ಷೇತ್ರವಾರು ವಿವರ ನೀಡುವುದು);</td><td>2019-20 & 2020-21ನೇ ಸಾಲಿನಲ್ಲಿ ಬಾಗಲಕೋಟೆ ಜಿಲ್ಲೆಗೆ ಶಾದಿಮಹಲ್ ನಿರ್ಮಾಣಕ್ಕೆ ಮತಕ್ಷೇತ್ರವಾರು ಬಿಡುಗಡೆಯಾದ ಅನುದಾನದ ವಿವರ.
(ರೂ. ಲಕ್ಷಗಳಲ್ಲಿ)
<table>
<tr><th>ವರ್ಷ</th><th>ಬಾದಾಮಿ</th><th>ಬೀಳಗಿ</th><th>ಜಮಖಂಡಿ</th><th>ಬಾಗಲಕೋಟೆ</th></tr>
<tr><td>2019-20</td><td>120.00</td><td>25.00</td><td>25.00</td><td>12.50</td></tr>
<tr><td colspan="5">2020-21ನೇ ಸಾಲಿನಲ್ಲಿ ಸದರಿ ಕಾರ್ಯಕ್ರಮವನ್ನು ಆರ್ಥಿಕ ಇಲಾಖೆಯವರು ಕೈಬಿಟ್ಟಿರುತ್ತಾರೆ.</td></tr>
</table></td></tr>
<tr><td>ಆ)</td><td>ಜಮಖಂಡಿ ಮತಕ್ಷೇತ್ರದ ಆಲಗೂರು ಗ್ರಾಮದಲ್ಲಿ ಶ್ರೀ ಪಾರ್ಶ್ವನಾಥ ದಿಗಂಬರ ಜೈನ್ ಸಮುದಾಯಭವನ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು?</td><td>ಬಾಗಲಕೋಟೆ ಜಿಲ್ಲೆಯ ಜಮಖಂಡಿ ಮತಕ್ಷೇತ್ರ ಆಲಗೂರ ಗ್ರಾಮದಲ್ಲಿ ಶ್ರೀ ಪಾರ್ಶನಾಥ ದಿಗಂಬರ ಜೈನ್ ಸಮುದಾಯಭವನ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆಯ ಪ್ರಸ್ತಾವನೆಯು ಪರಿಶೀಲನೆ ಹಂತದಲ್ಲಿದೆ.</td></tr>
</table>

ಸಂಖ್ಯೆ:MWD 28 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: MWD 33 LMQ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 02-02-2021.

104
415
3/2/21

ಇವರಿಂದ,

ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

ಇವರಿಗೆ,

ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ
ಬೆಂಗಳೂರು.

ಮಾನ್ಯರೇ,

ವಿಷಯ : ಶ್ರೀ ನಂಜೇಗೌಡ ಕೆ.ವೈ. (ಮಾಲೂರು) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 560 ಉತ್ತರಿಸುವ ಬಗ್ಗೆ.

*****

ಶ್ರೀ ನಂಜೇಗೌಡ ಕೆ.ವೈ. (ಮಾಲೂರು) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 560 ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಗೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ

ತಮ್ಮ ವಿಶ್ವಾಸಿ,

(ಎಸ್.ಎಜಾಸ್ ಪಾಷ)
ಶಾಖಾಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 560

ಸದಸ್ಯರ ಹೆಸರು : ಶ್ರೀ ನಂಜೇಗೌಡ ಕೆ.ವೈ.(ಮಾಲೂರು)

ಉತ್ತರಿಸಬೇಕಾದ ದಿನಾಂಕ : 03-02-2021.

ಉತ್ತರಿಸುವ ಸಚಿವರು : ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

	ಪ್ರಶ್ನೆ	ಉತ್ತರ
ಅ)	ಮಾಲೂರು ವಿಧಾನ ಸಭಾ ಕ್ಷೇತ್ರದಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಅಲ್ಪಸಂಖ್ಯಾತರ ಕಾಲೋನಿ ವಾಸ ಸ್ಥಳಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಮಂಜೂರು ಮಾಡಲಾಗಿರುವ ಅನುದಾನವೆಷ್ಟು; (ವಿವರ ನೀಡುವುದು)	ಮಾಲೂರು ವಿಧಾನ ಸಭಾ ಕ್ಷೇತ್ರದಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಅಲ್ಪಸಂಖ್ಯಾತರ ಕಾಲೋನಿ ವಾಸ ಸ್ಥಳಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಮಂಜೂರು ಮಾಡಲಾಗಿರುವ ಅನುದಾನದ ಮಾಹಿತಿಯನ್ನು ಅನುಬಂಧ-1ರಲ್ಲಿ ನೀಡಲಾಗಿದೆ.
ಆ)	ಸದರಿ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳೆಷ್ಟು; (ಕಾಮಗಾರಿವಾರು ಮಾಹಿತಿ ಒದಗಿಸುವುದು)	ಸದರಿ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳ ಮಾಹಿತಿಯನ್ನು ಅನುಬಂಧ-2ರಲ್ಲಿ ನೀಡಲಾಗಿದೆ.
ಇ)	ಪ್ರಸಕ್ತ ಸಾಲಿನಲ್ಲಿ ಮಂಜೂರು ಮಾಡಲಾಗಿರುವ ಅನುದಾನವೆಷ್ಟು; (ವಿವರ ಒದಗಿಸುವುದು)	2020-21ನೇ ಸಾಲಿನಲ್ಲಿ ಮಾನ್ಯ ಮುಖ್ಯ ಮಂತ್ರಿಗಳ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ ಆಯವ್ಯಯದಲ್ಲಿ ಯಾವುದೇ ಅನುದಾನವನ್ನು ಒದಗಿಸಿರುವುದಿಲ್ಲ.
ಈ)	ಅಲ್ಪಸಂಖ್ಯಾತರು ಹೆಚ್ಚಾಗಿರುವ ಮಾಲೂರು ವಿಧಾನಸಭಾ ಕ್ಷೇತ್ರಕ್ಕೆ ವಿಶೇಷ ಅನುದಾನ ಬಿಡುಗಡೆ ಮಾಡಲಾಗುವುದೇ; (ವಿವರ ಒದಗಿಸುವುದು)	--

ಸಂಖ್ಯೆ: MWD 33 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: MWD 18 LMQ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 02-02-2021.

ಇವರಿಂದ,

ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

4/5 88 3/2/21

ಇವರಿಗೆ,

ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ
ಬೆಂಗಳೂರು.

ಮಾನ್ಯರೇ,

ವಿಷಯ : ಶ್ರೀ ಮಂಜುನಾಥ ಹೆಚ್.ಪಿ. (ಹುಣಸೂರು) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 693 ಉತ್ತರಿಸುವ ಬಗ್ಗೆ.

*****

ಶ್ರೀ ಮಂಜುನಾಥ ಹೆಚ್.ಪಿ. (ಹುಣಸೂರು) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 693 ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಗೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ

ತಮ್ಮ ವಿಶ್ವಾಸಿ,

(ಎಂ.ಎ.ಮನ್ಸೂರ)
ಶಾಖಾಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 693

ಸದಸ್ಯರ ಹೆಸರು : ಶ್ರೀ ಮಂಜುನಾಥ ಹೆಚ್.ಪಿ. (ಹುಣಸೂರು)

ಉತ್ತರಿಸಬೇಕಾದ ದಿನಾಂಕ : 03-02-2021.

ಉತ್ತರಿಸುವ ಸಚಿವರು : ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು.

ಕ್ರ. ಸಂ.	ಪ್ರಶ್ನೆಗಳು	ಉತ್ತರಗಳು
ಅ.	ಮೈಸೂರು ಜಿಲ್ಲೆಯಲ್ಲಿರುವ ವಕ್ಫ್ ಹೆಸರಿನಲ್ಲಿರುವ ಒಟ್ಟು ಆಸ್ತಿಗಳು ಎಷ್ಟು; ತಾಲ್ಲೂಕುವಾರು ಮಾಹಿತಿ ನೀಡುವುದು;	ಮೈಸೂರು ಜಿಲ್ಲೆಯ ತಾಲ್ಲೂಕುವಾರು ವಕ್ಫ್ ಆಸ್ತಿಗಳ ವಿವರ ಈ ಕೆಳಕಂಡಂತಿದೆ. (ಕೆಳಗಿನ ಪಟ್ಟಿ ನೋಡಿ)
ಆ.	ಕಳೆದ ಮೂರು ವರ್ಷಗಳಿಂದ ಸದರಿ ವಕ್ಫ್ ಆಸ್ತಿಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು; ಈ ಪೈಕಿ ಹುಣಸೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ವಕ್ಫ್ ಆಸ್ತಿಗೆ ಎಷ್ಟು ಅನುದಾನ ಬಿಡುಗಡೆ ಮಾಡಿದೆ; (ಲೆಕ್ಕಶೀರ್ಷಿಕೆವಾರು, ವರ್ಷವಾರು ಮಾಹಿತಿ ನೀಡುವುದು)	ಕಳೆದ ಮೂರು ವರ್ಷಗಳಿಂದ ಮೈಸೂರು ಜಿಲ್ಲೆಯ ವಕ್ಫ್ ಆಸ್ತಿಗಳ ಅಭಿವೃದ್ಧಿಪಡಿಸಲು ಸರ್ಕಾರದಿಂದ ಮಂಜೂರು ಮಾಡಿರುವ ಅನುದಾನದ ವಿವರವನ್ನು ಅನುಬಂಧ-1ರಲ್ಲಿ ನೀಡಲಾಗಿದೆ. ಈ ಪೈಕಿ ಹುಣಸೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ವಕ್ಫ್ ಆಸ್ತಿಗೆ ಮಂಜೂರು ಮಾಡಿರುವ ಅನುದಾನದ ವಿವರವನ್ನು ಅನುಬಂಧ-2 ರಲ್ಲಿ ನೀಡಲಾಗಿದೆ.
ಇ	ಬಿಡುಗಡೆಯಾದ ಅನುದಾನಕ್ಕೆ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; (ಕಾಮಗಾರಿಗಳ ಹೆಸರು ಸಹಿತ ಮಾಹಿತಿ ನೀಡುವುದು)	ಹುಣಸೂರು ತಾಲ್ಲೂಕಿನಲ್ಲಿ ಬಿಡುಗಡೆಯಾದ ಅನುದಾನಕ್ಕೆ ಕೈಗೊಳ್ಳಲಾಗಿರುವ ಕಾಮಗಾರಿಗಳ ವಿವರ (ಕಾಮಗಾರಿಗಳ ಹೆಸರು ಸಹಿತ) ಇದರೊಂದಿಗೆ ಲಗತ್ತಿಸಿರುವ ಅನುಬಂಧ-2ರಲ್ಲಿ ನೀಡಲಾಗಿದೆ.
ಈ	ಹುಣಸೂರು ವಿಧಾನಸಭಾ ವ್ಯಾಪ್ತಿಯಲ್ಲಿರುವ ವಕ್ಫ್ ಆಸ್ತಿಗಳಲ್ಲಿ ಒತ್ತುವರಿಯಾಗಿರುವ ಪ್ರಕರಣಗಳೇನಾದರೂ ದಾಖಲಾಗಿವೆಯೇ; ಹಾಗಿದ್ದಲ್ಲಿ, ಎಷ್ಟು ಆಸ್ತಿಗಳು ಒತ್ತುವರಿಯಾಗಿರುತ್ತದೆ; (ವಿವರ ನೀಡುವುದು)	ಹುಣಸೂರು ವಿಧಾನ ಸಭಾ ವ್ಯಾಪ್ತಿಯಲ್ಲಿರುವ ವಕ್ಫ್ ಆಸ್ತಿಗಳಲ್ಲಿ ಒತ್ತುವರಿಯಾಗಿರುವ ಪ್ರಕರಣಗಳು ದಾಖಲಾಗಿರುವುದಿಲ್ಲ.

1	ಮೈಸೂರು ತಾಲ್ಲೂಕು	415
2	ನಂಜನಗೂಡು ತಾಲ್ಲೂಕು	63
3	ಹುಣಸೂರು	104
4	ಪಿರಿಯಾಪಟ್ಟಣ	97
5	ಕೆ.ಆರ್.ನಗರ	97
6	ಟಿ.ನರಸೀಪುರ	109
7	ಹೆಚ್.ಡಿ.ಕೋಟೆ	51
	ಒಟ್ಟು	936

ಉ	ಒತ್ತುವರಿ ಮಾಡಿರುವವರ ವಿರುದ್ಧ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ಮತ್ತು ಇದುವರೆಗೆ ಎಷ್ಟು ಒತ್ತುವರಿಯಾದ ಆಸ್ತಿಯನ್ನು ತೆರವುಗೊಳಿಸಿದೆ (ಪೂರ್ಣ ವಿವರ ನೀಡುವುದು)	ಅನ್ವಿಸುವುದಿಲ್ಲ
ಊ	ವಕ್ಫ್ ಆಸ್ತಿಗಳನ್ನು ಸಂರಕ್ಷಿಸಿಕೊಳ್ಳಲು ಸರ್ಕಾರದ ಕಟ್ಟುನಿಟ್ಟಿನ ನಿಯಮಗಳೇನು? (ವಿವರ ನೀಡುವುದು)	ವಕ್ಫ್ ಆಸ್ತಿಗಳನ್ನು ಸಂರಕ್ಷಿಸಿಕೊಳ್ಳಲು, ವಕ್ಫ್ ಆಸ್ತಿಗಳ ಸಂರಕ್ಷಣೆ ಯೋಜನೆ ಅಡಿಯಲ್ಲಿ ಕಾಂಪೌಂಡ್ ಗೋಡೆಯನ್ನು ನಿರ್ಮಿಸಲು ಭಾಗಶಃ ಅನುದಾನವನ್ನು ಸರ್ಕಾರದಿಂದ ಮಂಜೂರು ಮಾಡಲಾಗುತ್ತಿದೆ.

ಸಂಖ್ಯೆ: **MWD 18 LMQ 2021**

(ಆನಂದ್ ಸಿಂಗ್)
ಮೂಲಸೌಲಭ್ಯ ಅಭಿವೃದ್ಧಿ ಹಾಗೂ
ಹಜ್ ಮತ್ತು ವಕ್ಫ್ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ಮಮಇ 34 ಪಿಹೆಚ್‌ಪಿ 2021

ಕರ್ನಾಟಕ ಸರ್ಕಾರ ಸಚಿವಾಲಯ
3ನೇ ಗೇಟ್, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:02.02.2021

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬಹುಮಹಡಿಗಳ ಕಟ್ಟಡ, ಬೆಂಗಳೂರು-1.

ಇವರಿಗೆ;
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ,
ಬೆಂಗಳೂರು-560 001.

4ಬಿ 136 3/2/21

ಮಾನ್ಯರೆ,

ವಿಷಯ: ಶ್ರೀ ರೇವಣ್ಣ ಹೆಚ್. ಡಿ., ಮಾನ್ಯ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:727ಕ್ಕೆ ಉತ್ತರ ಸಲ್ಲಿಸುವ ಬಗ್ಗೆ.

ಉಲ್ಲೇಖ: ಕರ್ನಾಟಕ ವಿಧಾನ ಸಭೆ ಸಚಿವಾಲಯದ ಪತ್ರ ಸಂಖ್ಯೆ:ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.727/2021, ದಿ:23.01.2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ರೇವಣ್ಣ ಹೆಚ್. ಡಿ., ಮಾನ್ಯ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:727ಕ್ಕೆ ಸಂಬಂಧಿಸಿದಂತೆ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿ ಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

G. H. Sarojamma
(ಜಿ. ಹೆಚ್. ಸರೋಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ - 2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	727
ಮಾನ್ಯ ವಿಧಾನಸಭೆ ಸದಸ್ಯರ ಹೆಸರು	:	ಶ್ರೀ ರೇವಣ್ಣ ಹೆಚ್.ಡಿ (ಹೊಳೆನರಸೀಪುರ)
ಉತ್ತರಿಸಬೇಕಾದ ದಿನಾಂಕ	:	03.02.2021
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿರುವ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಂಖ್ಯೆ ಎಷ್ಟು? (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)	• 2011ರ ಜನಗಣತಿಯ ಪ್ರಕಾರ ರಾಜ್ಯದಲ್ಲಿ ವಿಕಲಚೇತನರ ಜನಸಂಖ್ಯೆ 1324205 ಇರುತ್ತದೆ. (ಜಿಲ್ಲಾವಾರು ಮಾಹಿತಿಯನ್ನು ಅನುಬಂಧ 1ರಲ್ಲಿ ಲಗತ್ತಿಸಿದೆ) • ಕರ್ನಾಟಕ ರಾಜ್ಯದಲ್ಲಿ ಒಟ್ಟು 61095297 ಜನಸಂಖ್ಯೆಯಲ್ಲಿ ಶೇ.9.60ರಷ್ಟು ಅಂದರೆ 58,65,148 ಜನ ಹಿರಿಯ ನಾಗರಿಕರಿರುತ್ತಾರೆ.
ಆ)	ರಾಜ್ಯದಲ್ಲಿ ವಿಕಲಚೇತನ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ ಜಾರಿಯಲ್ಲಿರುವ ವಿವಿಧ ಯೋಜನೆಗಳಡಿ ಯಲ್ಲಿ ನೀಡುತ್ತಿರುವ ಸೌಲಭ್ಯಗಳು ಯಾವುವು ಹಾಗೂ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ಅನುಸರಿಸುತ್ತಿರುವ ಮಾನದಂಡಗಳೇನು? (ಸಂಪೂರ್ಣ ಮಾಹಿತಿ ನೀಡುವುದು)	• ರಾಜ್ಯದಲ್ಲಿ ವಿಕಲಚೇತನ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಹಲವಾರು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದು, ಯೋಜನೆಗಳ ವಿವರಗಳನ್ನು ಕೆಳಕಂಡಂತೆ ಇದೆ. **(ಎ) ಶೈಕ್ಷಣಿಕ:-** 1.ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಶಾಲೆಗಳು 2.ಅಂಧ ಮಕ್ಕಳಿಗಾಗಿ ವಸತಿಯುತ ಶಾಲೆಗಳು 3.ಸರ್ಕಾರಿ ಅನುದಾನಿತ ಶಾಲೆಗಳು (ಅ) 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುವ ವಿಶೇಷ ಶಾಲೆ / ತರಬೇತಿ ಕೇಂದ್ರಗಳು (ಆ)ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ 4.ಅಂಗವಿಕಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹಧನ ಧನ 5. ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ 6. ಬ್ರೈಲ್ ಮುದ್ರಣಾಲಯ 7. ವಿಶೇಷ ಶಿಕ್ಷಣ ತರಬೇತಿ ಕೇಂದ್ರ ಯೋಜನೆ 8. ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು **(ಬಿ) ಉದ್ಯೋಗ ಮತ್ತು ತರಬೇತಿ:** 1.ಅಂಗವಿಕಲ ಉದ್ಯೋಗಸ್ಥ ಪುರುಷ ಹಾಗೂ ಮಹಿಳೆಯರ ವಸತಿ ನಿಲಯ 2.ಆಧಾರ ಯೋಜನೆ 3.ಗ್ರಾಮೀಣ ಪುನರ್ವಸತಿ ಯೋಜನೆ 4.ಉದ್ಯೋಗಸ್ಥ ವಿಕಲಚೇತನ ಮಹಿಳೆಯರ ಹಾಗೂ ತರಬೇತಿದಾರರ / ವಿದ್ಯಾರ್ಥಿನಿಯರ ವಸತಿ ನಿಲಯಗಳು **(ಸಿ) ಸಾಮಾಜಿಕ ಭದ್ರತಾ ಯೋಜನೆಗಳು:** 1.ಸಮಾಜ ಸೇವಾ ಸಂಕೀರ್ಣ 2.ಮಂದಮತಿ ಮಹಿಳೆಯರ ಅನುಪಾಲನಾ ಗೃಹ 3.ಮಾನಸಿಕ ಅಸ್ವಸ್ಥರಿಗೆ ಮಾನಸ ಕೇಂದ್ರಗಳು 4.ಬುದ್ಧಿಮಾಂದ್ಯ ಮಕ್ಕಳ ತಂದೆ / ತಾಯಿ / ಪೋಷಕರ ವಿಮಾ ಯೋಜನೆ 5.ವಿಕಲಚೇತನ ವ್ಯಕ್ತಿಗಳನ್ನು ಸಾಮಾನ್ಯರು ಮದುವೆಯಾದಲ್ಲಿ ಪ್ರೋತ್ಸಾಹ ಧನ ನೀಡುವ ಯೋಜನೆ 6.ಶಿಶುಪಾಲನಾ ಭತ್ಯೆ

		(ಡಿ) ಪುನರ್ವಸತಿ ಯೋಜನೆಗಳು: 1.ಅಂಗವಿಕಲರಿಗೆ ಸಾಧನ ಸಲಕರಣೆಗಳು ಅ) ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ ಆ)ತೀವ್ರತರೆಸಾದ ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ 2.ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ಯೋಜನೆ 3.ಅಂಗವಿಕಲತೆಯನ್ನು ನಿವಾರಿಸುವ ಶಸ್ತ್ರಚಿಕಿತ್ಸೆಗಾಗಿ ವೈದ್ಯಕೀಯ ಪರಿಹಾರ ನಿಧಿ ಯೋಜನೆ 4.ಸಾಧನೆ ಮತ್ತು ಪ್ರತಿಭೆ ಯೋಜನೆ 5.ನಿರಾಮಯ ಆರೋಗ್ಯ ವಿಮಾ ಯೋಜನೆ 6.ಸ್ಪರ್ಧಾ ಚೇತನ 7.ನಿರುದ್ಯೋಗ ಭತ್ಯೆ (ಇ) ಸಾರ್ವಜನಿಕ ಅರಿವು ಮೂಡಿಸುವ ಯೋಜನೆಗಳು: 1. ವಿಕಲಚೇತನರ ಮಾಹಿತಿ ಸಲಹಾ ಕೇಂದ್ರ 2. ವಿಕಲಚೇತನರಿಗೆ ಗುರುತಿನ ಚೀಟಿ ನೀಡುವ ಯೋಜನೆ 3. ವಿಕಲಚೇತನರಿಗೆ ರಿಯಾಯಿತಿ ದರದ ಬಸ್ ಪಾಸ್ **(ಈ) ಹಿರಿಯನಾಗರಿಕರಿಗಾಗಿ ಜಾರಿಗೊಳಿಸುತ್ತಿರುವ ಯೋಜನೆಗಳು:** 1. ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರ 2. ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು 3. ವೃದ್ಧಾಶ್ರಮಗಳಿಗೆ ಅನುದಾನ ನೀಡುವ ಯೋಜನೆ 4. ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು: **ಮೇಲ್ಕಂಡ ಎಲ್ಲಾ ಯೋಜನೆಗಳಡಿ ನೀಡುತ್ತಿರುವ ಸೌಲಭ್ಯ ಹಾಗೂ ಯೋಜನೆ ಮಾನದಂಡಗಳನ್ನು ಅನುಬಂಧ-02 ಮತ್ತು 03 ರಲ್ಲಿ ಲಗತ್ತಿಸಿದೆ.**
ಇ)	ಹಾಸನ ಜಿಲ್ಲೆಯಲ್ಲಿ, ವಿಕಲಚೇತನರ ಶ್ರೇಯೋಭಿವೃದ್ಧಿಗೆ ನೊಂದಣಿಯಾಗಿರುವ ಸಂಸ್ಥೆಗಳೆಷ್ಟು? ಈ ಪೈಕಿ ಎಷ್ಟು ಸಂಸ್ಥೆಗಳು ವಿಕಲಚೇತನರ ಏಳಿಗೆಗೆ ಶ್ರಮಿಸುತ್ತಿವೆ? (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)	• ಹಾಸನ ಜಿಲ್ಲೆಯಲ್ಲಿ ವಿಕಲಚೇತನರ ಶ್ರೇಯೋಭಿವೃದ್ಧಿಗೆ 7 ಸಂಸ್ಥೆಗಳು ನೊಂದಣಿಯಾಗಿರುತ್ತದೆ. • ಈ 7 ಸಂಸ್ಥೆಗಳೂ ಸಹ ವಿಕಲಚೇತನರ ಏಳಿಗೆಗಾಗಿ ಶ್ರಮಿಸುತ್ತಿದೆ. **ವಿಧಾನಸಭಾ ಕ್ಷೇತ್ರವಾರು ಮಾಹಿತಿ ಈ ಕೆಳಕಂಡಂತಿದೆ.** • **ಹಾಸನ ವಿಧಾನಸಭಾ ಕ್ಷೇತ್ರ:**(5) 1. ಕರ್ನಾಟಕ ಅಂಧರ ಒಕ್ಕೂಟ, ಹಾಸನ 2. ಕರ್ನಾಟಕ ಅಂಗವಿಕಲರ ಕ್ಷೇಮಾಭಿವೃದ್ದಿ ಸಂಸ್ಥೆ (ರಿ), ಬೆಂಗಳೂರು, 3. ಶ್ವೇತ ವಿದ್ಯಾಸಂಸ್ಥೆ (ರಿ) ಹಾಸನ, 4. ಶ್ರೀ ನಿವೇದಿತಾ ವಿದ್ಯಾಸಂಸ್ಥೆ, ಹಾಸನ, 5. ಸಾಧ್ಯ ಟ್ರಸ್ಟ್ ಫಾರ್ ಸೋಶಿಯಲ್ ಡೆವಲಪ್‌ಮೆಂಟ್ (ರಿ) ಮಡಿಕೇರಿ • **ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರ:**(1) 1. ವಿದ್ಯಾರಣ್ಯ (ರಿ) ಬೆಂಗಳೂರು • **ಸಕಲೇಶಪುರ-ಆಲೂರು ವಿಧಾನಸಭಾ ಕ್ಷೇತ್ರ** : (1) 1. ರೋಟರಿ ಟ್ರಸ್ಟ್, ಸಕಲೇಶಪುರ
ಈ)	ಹಾಸನ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ವಿವಿಧ ರೀತಿಯ ಎಷ್ಟು ವಿಕಲಚೇತನರಿಗೆ ವೀಲ್ ಚೇರ್ ಮತ್ತು 3 ಚಕ್ರಗಳ ಮೋಟರ್ ವಾಹನಗಳನ್ನು ವಿತರಣೆ ಮಾಡಲಾಗಿದೆ? ಈ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ಅನುಸರಿಸುವ ಮಾನದಂಡಗಳೇನು? (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)	• ಹಾಸನ ಜಿಲ್ಲೆಯಲ್ಲಿ 2020-21ನೇ ಸಾಲಿನಲ್ಲಿ ವೀಲ್‌ಚೇರ್ ಖರೀದಿಗೆ ಸಂಬಂಧಿಸಿದಂತೆ ಇ-ಟೆಂಡರ್ ಪ್ರಕ್ರಿಯೆಯು ಚಾಲ್ತಿಯಲ್ಲಿದೆ • 3 ಚಕ್ರಗಳ ಮೋಟರ್ ವಾಹನಗಳನ್ನು ರಾಜ್ಯ ಮಟ್ಟದಲ್ಲಿ ಖರೀದಿಸಲಾಗುತ್ತಿದ್ದು, ಈ ಬಗ್ಗೆ ಸಚಿವ ಸಂಪುಟ ಅನುಮೋದನೆ ನೀಡಲಾಗಿದೆ. ಟೆಂಡರ್ ಕರೆಯಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

AHF/ 24 /AID /2021-AHF_SEC_b_AH_ Animal Husbandry Fisheries sec

ಕರ್ನಾಟಕ ಸರ್ಕಾರ

ಸಂಖ್ಯೆ:ಇ-ಪಸಂಮೀ 24 ಸಲೆವಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ:01.02.2021

135
4/5
03/2/21

ಇವರಿಂದ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
ಬೆಂಗಳೂರು.

ಇವರಿಗೆ:

ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ,

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ **ರೇವಣ್ಣ ಹೆಚ್.ಡಿ. (ಹೊಳೇನರಸೀಪುರ)** ಇವರು ಸದನದಲ್ಲಿ ಮಂಡಿಸಿರುವ ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ: 726 ಕ್ಕೆ ಉತ್ತರಿಸುವ ಬಗ್ಗೆ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಸಭೆಯ ಮಾನ್ಯ ವಿಧಾನ ಸಭೆಯ ಸದಸ್ಯರಾದ **ಶ್ರೀ ರೇವಣ್ಣ ಹೆಚ್.ಡಿ. (ಹೊಳೇನರಸೀಪುರ)** ಇವರು ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 726 ಕ್ಕೆ ಕನ್ನಡ ಭಾಷೆಯಲ್ಲಿ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ

(ಬಿ.ಎನ್. ಪ್ರವೀಣ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
(ಪಶುಸಂಗೋಪನೆ)

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ರೇವಣ್ಣ ಹೆಚ್.ಡಿ. (ಹೊಳೆನರಸೀಪುರ)

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 726

ಉತ್ತರಿಸಬೇಕಾದ ದಿನಾಂಕ : 03.02.2021.

ಉತ್ತರಿಸಬೇಕಾದ ಸಚಿವರು : ಮಾನ್ಯ ಪಶುಸಂಗೋಪನೆ ಸಚಿವರು.

ಕ್ರಸಂ	ಪ್ರಶ್ನೆಗಳು	ಉತ್ತರಗಳು
ಅ	ಹಾಸನ ನಗರದಲ್ಲಿರುವ ಸರ್ಕಾರಿ ಪಶುವೈದ್ಯಕೀಯ ಕಾಲೇಜಿಗೆ ಮೂಲಭೂತ ಸೌಕರ್ಯಗಳ ಕಾಮಗಾರಿಗಳಾದ ಹಾಸನದ ಪಶುವೈದ್ಯಕೀಯ ಕಾಲೇಜಿನ ಆವರಣದಲ್ಲಿರುವ ಬಾಲಕಿಯರ ವಸತಿ ನಿಲಯದ 2ನೇ ಮಹಡಿ ನಿರ್ಮಾಣ, ಆಡಿಟೋರಿಯಂ ಕಟ್ಟಡ ನಿರ್ಮಾಣ, ಸಂಪರ್ಕ ರಸ್ತೆಗಳು, ಬಿ ಮತ್ತು ಸಿ ಮಾದರಿ ವಸತಿ ಗೃಹಗಳ ನಿರ್ಮಾಣ, ಜಾನುವಾರು ಶವಾಗರ ಕಟ್ಟಡ ನಿರ್ಮಾಣ, ಜಾನುವಾರು ಆಸ್ಪತ್ರೆ ಕಟ್ಟಡ ನಿರ್ಮಾಣ ಹಾಗೂ ಶೆಡ್‌ಗಳ ನಿರ್ಮಾಣ ಕಾಮಗಾರಿಗಳಿಗಾಗಿ ರೂ.23.00 ಕೋಟಿಗಳ ಮೊತ್ತದ ಅಂದಾಜಿನ ಪ್ರಸ್ತಾವನೆಗೆ ಸಂಬಂಧಿಸಿದಂತೆ ಅನುದಾನವನ್ನು ಬಿಡುಗಡೆಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್‌ನ ಅಂಗ ಸಂಸ್ಥೆಯಾದ ಹಾಸನದ ಪಶುವೈದ್ಯಕೀಯ ಕಾಲೇಜಿಗೆ ಮೂಲಭೂತ ಸೌಕರ್ಯಗಳಾದ ಬಾಲಕಿಯರ ವಸತಿ ನಿಲಯದ 2ನೇ ಮಹಡಿ ನಿರ್ಮಾಣ, ಆಡಿಟೋರಿಯಂ ಕಟ್ಟಡ ನಿರ್ಮಾಣ, ಸಂಪರ್ಕ ರಸ್ತೆಗಳು ಬಿ ಮತ್ತು ಸಿ ಮಾದರಿ ವಸತಿ ಗೃಹಗಳ ನಿರ್ಮಾಣ, ಜಾನುವಾರು ಶವಾಗಾರ ಕಟ್ಟಡ ನಿರ್ಮಾಣ, ಜಾನುವಾರು ಆಸ್ಪತ್ರೆ ಕಟ್ಟಡ ನಿರ್ಮಾಣ ಹಾಗೂ ಶೆಡ್‌ಗಳ ನಿರ್ಮಾಣ ಕಾಮಗಾರಿಗಳಿಗಾಗಿ ಅಗತ್ಯ ಅನುದಾನ ಬಿಡುಗಡೆ ಮಾಡುವಂತೆ ಆರ್ಥಿಕ ಇಲಾಖೆಯನ್ನು ಕೋರಿದ್ದು, ಸದರಿ ಇಲಾಖೆಯು ಕೋರಿರುವ ಮಾಹಿತಿ ಮತ್ತು ದಾಖಲೆಗಳನ್ನು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್ ಇಲ್ಲಿಂದ ಪಡೆದು ಸಲ್ಲಿಸಲು ಕ್ರಮವಹಿಸಲಾಗುತ್ತಿದೆ.
ಆ	ಹಾಸನ ತಾಲ್ಲೂಕಿನ ಸರ್ಕಾರಿ ಪಶುವೈದ್ಯಕೀಯ ಕಾಲೇಜಿನ ಹಂತ–4 ಕಾಮಗಾರಿಗಳಿಗಾಗಿ ಅನುದಾನವನ್ನು ಬಿಡುಗಡೆಗೊಳಿಸಲು ಯಾವ ಕಾಲಮಿತಿಯೊಳಗೆ ಸರ್ಕಾರ ಕ್ರಮ ಕೈಗೊಳ್ಳುವುದು ? (ಸಂಪೂರ್ಣ ಮಾಹಿತಿ ನೀಡುವುದು).	ಹಾಸನ ಪಶುವೈದ್ಯಕೀಯ ಕಾಲೇಜಿನ ಹಂತ–3 ರ ಕಾಮಗಾರಿಗಳು ಪೂರ್ಣಗೊಂಡ ನಂತರ ಈ ಕುರಿತು ಸೂಕ್ತ ಕ್ರಮವಹಿಸಲಾಗುವುದು.

ಪಸಂಮೀ ಇ–24 ಸಲೆವಿ 2021

ಪ್ರಭು ಬಿ. ಚವ್ಹಾಣ್
ಪಶುಸಂಗೋಪನೆ ಸಚಿವರು,

ಕರ್ನಾಟಕ ಸರ್ಕಾರ

ಸಂಖ್ಯೆ: MWD 16 LMQ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 02-02-2021.

123
U/S
3/2/21

ಇವರಿಂದ,

ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

ಇವರಿಗೆ,

ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ
ಬೆಂಗಳೂರು.

ಮಾನ್ಯರೇ,

ವಿಷಯ : ಶ್ರೀ ರಾಜೀವ್ ಪಿ. (ಕುಡಚಿ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 666 ಉತ್ತರಿಸುವ ಬಗ್ಗೆ.

*****

ಶ್ರೀ ರಾಜೀವ್ ಪಿ. (ಕುಡಚಿ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 666 ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಗೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ

ತಮ್ಮ ವಿಶ್ವಾಸಿ,

(signature)

(ಎಸ್.ಎಜಾಸ್ ಪಾಷ)
ಶಾಖಾಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	– 666
ಉತ್ತರಿಸಬೇಕಾದ ದಿನಾಂಕ	– 03-02-2021
ಸದಸ್ಯರ ಹೆಸರು	– ಶ್ರೀ. ರಾಜೀವ್ ಪಿ. (ಕುಡಚಿ)
ಉತ್ತರಿಸುವ ಸಚಿವರು	– ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಮಂಜೂರಾದ ಕಾಮಗಾರಿಗಳೆಷ್ಟು(ಜಿಲ್ಲಾವಾರು ವಿವರ ನೀಡುವುದು);	ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಮಂಜೂರಾದ ಕಾಮಗಾರಿಗಳ ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ-1ರಲ್ಲಿ** ಒದಗಿಸಲಾಗಿದೆ.
ಆ)	ಬೆಳಗಾವಿ ಜಿಲ್ಲೆಗೆ ಅಲ್ಪಸಂಖ್ಯಾತರ ಇಲಾಖೆಯಿಂದ ಮಂಜೂರಾದ ಕಾಮಗಾರಿಗಳಾವುವು (ತಾಲ್ಲೂಕುವಾರು ವಿವರ ನೀಡುವುದು);	ಬೆಳಗಾವಿ ಜಿಲ್ಲೆಗೆ ಅಲ್ಪಸಂಖ್ಯಾತರ ಇಲಾಖೆಯಿಂದ ಮಂಜೂರಾದ ಕಾಮಗಾರಿಗಳ ತಾಲ್ಲೂಕುವಾರು ಮಾಹಿತಿಯನ್ನು **ಅನುಬಂಧ-2ರಲ್ಲಿ** ಒದಗಿಸಲಾಗಿದೆ.
ಇ)	ಬೆಳಗಾವಿ ಜಿಲ್ಲೆಯ ಕುಡುಚಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಪ್ರಾರಂಭಿಸಿದ ಕಾಮಗಾರಿಗಳು ಪೂರ್ಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಗಮನಕ್ಕೆ ಬಂದಿರುತ್ತದೆ.
ಈ)	ಬಂದಿದ್ದಲ್ಲಿ, ಪೂರ್ಣಗೊಂಡಿರುವ ಕಾಮಗಾರಿಗಳಿಗೆ ಬಾಕಿ ಅನುದಾನವನ್ನು ಬಿಡುಗಡೆಗೊಳಿಸದಿರಲು ಕಾರಣವೇನು;	➢ 2018-19ನೇ ಸಾಲಿನ ಕುಡುಚಿ ವಿಧಾನಸಭಾ ಕ್ಷೇತ್ರಕ್ಕೆ ರೂ.25.00 ಲಕ್ಷಗಳು ಮಂಜೂರಾಗಿದ್ದು, ಆದರೆ ಚುನಾವಣೆ ನೀತಿ ಸಂಹಿತೆ ಕಾರಣ ಸದರಿ ಅನುದಾನವು ವ್ಯಪಗತಗೊಂಡಿದ್ದು, ಗುತ್ತಿಗೆದಾರರು ಕಾಮಗಾರಿಯನ್ನು ಪೂರ್ಣಗೊಳಿಸಿರುತ್ತಾರೆ. ಆದರೆ ಅನುದಾನವು ಇದುವರೆವಿಗೂ ಮರು ಬಿಡುಗಡೆಯಾಗಿರುವುದಿಲ್ಲ. ➢ 2018-19ನೇ ಸಾಲಿನಲ್ಲಿ ರೂ.300.00 ಲಕ್ಷಗಳ ಅನುದಾನ ಮಂಜೂರಾಗಿದ್ದು, ಸದರಿ ಮಂಜೂರಾದ ಅನುದಾನದಲ್ಲಿ ಶೇ.25 ರಷ್ಟು ರೂ.75.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಬಿಡುಗಡೆಯಾಗಿರುವ ಮೊತ್ತಕ್ಕೆ ಕಾಮಗಾರಿಗಳು ಪೂರ್ಣಗೊಂಡಿದ್ದು, ಇನ್ನುಳಿದ ಶೇ.75 ರಷ್ಟು ರೂ.225.00 ಲಕ್ಷಗಳ ಕಾಮಗಾರಿಯು ಅಪೂರ್ಣಗೊಂಡಿರುತ್ತದೆ. ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ರೂ.102.26ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲು ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆ ಸಲ್ಲಿಸಲಾಗಿತ್ತು. ಕೋವಿಡ್-19ರ ಹಿನ್ನೆಲೆಯಲ್ಲಿ ಅನುದಾನ ಬಿಡುಗಡೆ ಮಾಡಲು ಸಾಧ್ಯವಿರುವುದಿಲ್ಲವೆಂದು ಆರ್ಥಿಕ ಇಲಾಖೆಯವರು ತಿಳಿಸಿರುತ್ತಾರೆ. 2020-21ನೇ ಸಾಲಿನ ಆಯವ್ಯಯದಲ್ಲಿ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಯಾವುದೇ ಅನುದಾನ ನಿಗದಿಪಡಿಸಿರುವುದಿಲ್ಲ.
ಉ)	ಯಾವ ಕಾಲ ಮಿತಿಯೊಳಗೆ ಈ ಕಾಮಗಾರಿಗಳಿಗೆ ಅನುದಾನ ಬಿಡುಗಡೆಗೊಳಿಸಲಾಗುವುದು?	

ಸಂಖ್ಯೆ:MWD 16 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: MWD 24 LMQ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 02-02-2021.

ಇವರಿಂದ,
ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

45 68 3/2/21

ಇವರಿಗೆ,
ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ
ಬೆಂಗಳೂರು.

ಮಾನ್ಯರೇ,

ವಿಷಯ : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 758 ಉತ್ತರಿಸುವ ಬಗ್ಗೆ.

*****

ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 758 ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಗೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ

ತಮ್ಮ ವಿಶ್ವಾಸಿ,

(ಎಸ್.ಎಜಾಸ್ ಪಾಷ)
ಶಾಖಾಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ – 758
ಉತ್ತರಿಸಬೇಕಾದ ದಿನಾಂಕ – 03-02-2021
ಸದಸ್ಯರ ಹೆಸರು – ಶ್ರೀ. ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ)
ಉತ್ತರಿಸುವ ಸಚಿವರು – ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಮಂಜೂರಾದ ಕಾಮಗಾರಿಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)	ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಮಂಜೂರಾದ ಕಾಮಗಾರಿಗಳ ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-1ರಲ್ಲಿ ಒದಗಿಸಲಾಗಿದೆ.
ಆ)	ಬೆಳಗಾವಿ ಜಿಲ್ಲೆಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಮಂಜೂರಾದ ಕಾಮಗಾರಿಗಳಾವುವು; (ತಾಲ್ಲೂಕುವಾರು ವಿವರ ನೀಡುವುದು)	ಬೆಳಗಾವಿ ಜಿಲ್ಲೆಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಮಂಜೂರಾದ ಕಾಮಗಾರಿಗಳ ತಾಲ್ಲೂಕುವಾರು ಮಾಹಿತಿಯನ್ನು ಅನುಬಂಧ-2ರಲ್ಲಿ ಒದಗಿಸಲಾಗಿದೆ.
ಇ)	ಬೆಳಗಾವಿ ಜಿಲ್ಲೆ ಬೈಲಹೊಂಗಲ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಿಗೆ ಕಲ್ಯಾಣ ಇಲಾಖೆಯಿಂದ ಪ್ರಾರಂಭಿಸಿದ ಕಾಮಗಾರಿಗಳು ಅಪೂರ್ಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?(ವಿವರ ನೀಡುವುದು)	ಬೆಳಗಾವಿ ಜಿಲ್ಲೆ, ಬೈಲಹೊಂಗಲ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕಿನ ಒಟ್ಟು 15 ಕಾಮಗಾರಿಗಳಿಗೆ ರೂ.295.00 ಲಕ್ಷಗಳ ಅನುದಾನ ಮಂಜೂರಾಗಿದ್ದು, ಸದರಿ ಮಂಜೂರಾದ ಅನುದಾನದಲ್ಲಿ ಶೇ.25 ರಷ್ಟು ರೂ.73.75 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಬಿಡುಗಡೆಯಾಗಿರುವ ಮೊತ್ತಕ್ಕೆ ಕಾಮಗಾರಿಗಳು ಪೂರ್ಣಗೊಂಡಿದ್ದು, ಇನ್ನುಳಿದ ಶೇ.75 ರಷ್ಟು ರೂ.221.25 ಲಕ್ಷಗಳ ಕಾಮಗಾರಿಯು ಅಪೂರ್ಣಗೊಂಡಿರುತ್ತದೆ. ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ರೂ.102.26 ಕೋಟಿಗಳ ಅನುದಾನ ಮಂಜೂರು ಮಾಡಲು ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿತ್ತು. ಪ್ರಸ್ತುತ ಕೋವಿಡ್-19ರ ಹಿನ್ನೆಲೆಯಲ್ಲಿ ಅನುದಾನ ಬಿಡುಗಡೆಗೊಳಿಸಲು ಸಾಧ್ಯವಿರುವುದಿಲ್ಲವೆಂದು ಆರ್ಥಿಕ ಇಲಾಖೆಯವರು ತಿಳಿಸಿರುತ್ತಾರೆ.

ಸಂಖ್ಯೆ:MWD 24 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: MWD 31 LMQ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 02-02-2021.

ಇವರಿಂದ,

ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

70
ULS
3/2/21

ಇವರಿಗೆ,

ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ
ಬೆಂಗಳೂರು.

ಮಾನ್ಯರೇ,

ವಿಷಯ : ಶ್ರೀ ಖಾದರ್ ಯು.ಟಿ. (ಮಂಗಳೂರು) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 685 ಉತ್ತರಿಸುವ ಬಗ್ಗೆ.

*****

ಶ್ರೀ ಖಾದರ್ ಯು.ಟಿ. (ಮಂಗಳೂರು) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 685 ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಗೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ

ತಮ್ಮ ವಿಶ್ವಾಸಿ,

(ಎಸ್.ಎಜಾಜ್ ಪಾಷ)
ಶಾಖಾಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 685

ಸದಸ್ಯರ ಹೆಸರು : ಶ್ರೀ ಖಾದರ್ ಯು.ಟಿ. (ಮಂಗಳೂರು)

ಉತ್ತರಿಸಬೇಕಾದ ದಿನಾಂಕ : 03-02-2021.

ಉತ್ತರಿಸುವ ಸಚಿವರು : ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ.	ಕಳೆದ 2 ವರ್ಷಗಳಿಂದ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳಾವುವು; ಇವುಗಳಿಗಾಗಿ ಮೀಸಲಿಟ್ಟಿರುವ ಅನುದಾನವೆಷ್ಟು;	**ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ.** ಕಳೆದ 2 ವರ್ಷಗಳಿಂದ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳು ಹಾಗೂ ಇವುಗಳಿಗೆ ಮೀಸಲಿಟ್ಟಿರುವ ಅನುದಾನದ ವಿವರಗಳನ್ನು "ಅನುಬಂಧ-1" ರಲ್ಲಿ ನೀಡಲಾಗಿದೆ. **ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ.** ವಿವರಗಳನ್ನು **"ಅನುಬಂಧ-2"** ರಲ್ಲಿ ನೀಡಲಾಗಿದೆ.
ಆ.	ಹಾಗಿದ್ದಲ್ಲಿ; ಇದುವರೆವಿಗೂ ಬಿಡುಗಡೆ ಮಾಡಿ ಖರ್ಚುಮಾಡಿರುವ ಹಣವೆಷ್ಟು? (ಜಿಲ್ಲಾವಾರು ವಿವರಗಳನ್ನು ಒದಗಿಸುವುದು)	ಇದುವರೆವಿಗೂ ಬಿಡುಗಡೆ ಮಾಡಿ ಖರ್ಚು ಮಾಡಿರುವ ಜಿಲ್ಲಾವಾರು ಮಾಹಿತಿಯನ್ನು **"ಅನುಬಂಧ-3"** ರಲ್ಲಿ ನೀಡಲಾಗಿದೆ.

ಸಂಖ್ಯೆ: MWD 31 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: MWD 29 LMQ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 02-02-2021.

28
ULS
3/2/21

ಇವರಿಂದ,
ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

ಇವರಿಗೆ,
ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ
ಬೆಂಗಳೂರು.

ಮಾನ್ಯರೇ,

ವಿಷಯ : ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 674 ಉತ್ತರಿಸುವ ಬಗ್ಗೆ.

*****

ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 674 ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಗೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ

ತಮ್ಮ ವಿಶ್ವಾಸಿ,

(ಎಸ್.ಎಜಾಸ್ ಪಾಷ)
ಶಾಖಾಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	674
ಸದಸ್ಯರ ಹೆಸರು	:	ಶ್ರೀ ಬಾಲಕೃಷ್ಣ ಸಿ.ಎನ್.(ಶ್ರವಣಬೆಳಗುಳ)
ಉತ್ತರಿಸಬೇಕಾದ ದಿನಾಂಕ	:	03-02-2021.
ಉತ್ತರಿಸುವ ಸಚಿವರು	:	ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ.	ರಾಜ್ಯದಲ್ಲಿ ಕಳೆದ 03 ವರ್ಷಗಳಿಂದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಬಡ ಮುಸ್ಲಿಂ, ಜೈನ್ ಹಾಗೂ ಅಲ್ಪಸಂಖ್ಯಾತರ ಕುಟುಂಬಗಳಿಗೆ ಗಂಗಾ ಕಲ್ಯಾಣ ಯೋಜನೆ, ಶ್ರಮ ಶಕ್ತಿ ಯೋಜನೆ ಹಾಗೂ ವೃತ್ತಿ ಪ್ರೋತ್ಸಾಹ ಯೋಜನೆಗಳಡಿಯಲ್ಲಿ ಎಷ್ಟು ಫಲಾನುಭವಿಗಳಿಗೆ ಸಾಲ ಸೌಲಭ್ಯವನ್ನು ಒದಗಿಸಲಾಗಿದೆ; ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು;	ಕಳೆದ 03 ವರ್ಷಗಳಿಂದ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಗಂಗಾ ಕಲ್ಯಾಣ, ಶ್ರಮಶಕ್ತಿ ಯೋಜನೆ ಹಾಗೂ ವೃತ್ತಿ ಪ್ರೋತ್ಸಾಹ ಯೋಜನೆಗಳಡಿಯಲ್ಲಿ ಈ ಕೆಳಕಂಡಂತೆ ಸಾಲ ಸೌಲಭ್ಯ ಒದಗಿಸಲಾಗಿದೆ. (ಕೆಳಗಿನ ಕೋಷ್ಟಕ ನೋಡಿ) ಯೋಜನೆವಾರು ಜಿಲ್ಲಾವಾರು, ಕ್ಷೇತ್ರವಾರು ಮಾಹಿತಿ **"ಅನುಬಂಧ-ಅ"** ರಲ್ಲಿ ನೀಡಲಾಗಿದೆ.
ಆ.	ಈ ಯೋಜನೆಗಳಡಿಯಲ್ಲಿ ಸಾಲ ಸೌಲಭ್ಯಗಳನ್ನು ಒದಗಿಸಲು ಅನುಸರಿಸಲಾಗುವ ಮಾನದಂಡಗಳೇನು ;(ಸಂಪೂರ್ಣ ಮಾಹಿತಿ ನೀಡುವುದು)	ಮಾಹಿತಿಯನ್ನು **"ಅನುಬಂಧ-ಆ"** ರಲ್ಲಿ ನೀಡಲಾಗಿದೆ.
ಇ.	ಬಡ ಮುಸ್ಲಿಂ, ಜೈನ್ ಹಾಗೂ ಅಲ್ಪಸಂಖ್ಯಾತರ ಕುಟುಂಬಗಳಿಗೆ ಗಂಗಾಕಲ್ಯಾಣ ಯೋಜನೆ, ಶ್ರಮಶಕ್ತಿ ಯೋಜನೆ ಹಾಗೂ ವೃತ್ತಿ ಪ್ರೋತ್ಸಾಹ ಯೋಜನೆಗಳಡಿಯಲ್ಲಿ ಸಾಲ ಸೌಲಭ್ಯ ನೀಡಲು ಗುರಿಯನ್ನು ನಿಗದಿಪಡಿಸಿದ್ದು 2019-20ನೇ ಸಾಲಿನ ಆರ್ಥಿಕ ವರ್ಷದಿಂದ ಅತ್ಯಲ್ಪ ಗುರಿಯನ್ನು ನಿಗದಿಪಡಿಸಲು ಕಾರಣಗಳೇನು?	ಸರ್ಕಾರದಿಂದ ಆಯವ್ಯಯದಲ್ಲಿ ನಿಗದಿಪಡಿಸಿ ಬಿಡುಗಡೆ ಮಾಡುವ ಮೊತ್ತಕ್ಕೆ ನಿಗಮದಲ್ಲಿ 2011 ರ ಜನಗಣತಿ ಅಲ್ಪಸಂಖ್ಯಾತರ ಜನ ಸಂಖ್ಯೆ ಆಧಾರದ ಮೇಲೆ ಜಿಲ್ಲಾವಾರು ಗುರಿಯನ್ನು ನಿಗದಿಪಡಿಸಲಾಗುವುದು.

ವರ್ಷ	ಫಲಾನುಭವಿಗಳ ಸಂಖ್ಯೆ:		
	ಗಂಗಾಕಲ್ಯಾಣ ಯೋಜನೆ	ಶ್ರಮಶಕ್ತಿ ಯೋಜನೆ	ವೃತ್ತಿ ಪ್ರೋತ್ಸಾಹ ಯೋಜನೆ
2017-18	1979	12129	ಯೋಜನೆ ಇರುವುದಿಲ್ಲ
2018-19	1407	7354	1555
2019-20	750 ಗುರಿ ಟೆಂಡರ್ ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ	2971	124

ಸಂಖ್ಯೆ: **MWD 29 LMQ 2021**

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:01/1:ಆರ್‌ಆರ್‌ಸಿ:2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,ಬೆಂಗಳೂರು
ದಿನಾಂಕ:02.02.2021.

4/6
153
3/2/21

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ ಸಚಿವಾಲಯ,
ವಿಧಾನ ಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 702 ಗೆ ಉತ್ತರವನ್ನು ಒದಗಿಸುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 702 ಗೆ ಉತ್ತರವನ್ನು ಸಿದ್ಧಪಡಿಸಿ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

(ರಮೇಶ್ ಕೆ.ಓ)
ಉಪ ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

<u>**ಕರ್ನಾಟಕ ವಿಧಾನಸಭೆ**</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	702
ಸದಸ್ಯರ ಹೆಸರು	ಶ್ರೀ ಶ್ರೀನಿವಾಸ್ ಎಂ. (ಮಂಡ್ಯ)
ಉತ್ತರಿಸಬೇಕಾದ ದಿನಾಂಕ	03.02.2021

ಕ್ರಸಂ	ಪ್ರಶ್ನೆ	ಉತ್ತರ
ಅ.	ಮಂಡ್ಯ ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ ನಿಗಮದಲ್ಲಿ ನಡೆದಿರುವ ಹಗರಣಗಳಿಗೆ ಸಂಬಂಧಿಸಿದಂತೆ, ಸಂಬಂಧಿಸಿದ ಅಧಿಕಾರಿಗಳ ವರ್ಗಾವಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಬಂದಿದೆ.
ಆ.	ಬಂದಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಸರ್ಕಾರದ ಕ್ರಮವೇನು;	ಕೆ.ಆರ್.ಐ.ಡಿ.ಎಲ್. ಸಂಸ್ಥೆಯ ಮಂಡ್ಯ ಉಪ ವಿಭಾಗದಲ್ಲಿ ಕಟ್ಟಡ ಸಾಮಗ್ರಿಗಳ ಕೊರತೆ ಸಂಬಂಧ ಆರೋಪಿತರೆಂದು ತಿಳಿದುಬಂದಿರುವ ಶ್ರೀ ಸುರೇಶ್ ಬಾಬು, ಕೆ., ಪ್ರಭಾರ ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ಶ್ರೀ ರೇಣುಕಾ ಪ್ರಸಾದ್, ದ್ವಿತೀಯ ದರ್ಜೆ ಸಹಾಯಕರು ಇವರುಗಳನ್ನು ದಿನಾಂಕ 15-04-2020 ರಂದು ಇಲಾಖಾ ವಿಚಾರಣೆ ಕಾಯ್ದಿರಿಸಿ ಸೇವೆಯಿಂದ ಅಮಾನತ್ತಿನಲ್ಲಿರಿಸಲಾಗಿದೆ. **(ವಿವರ ಅನುಬಂಧದಲ್ಲಿ ಲಗತ್ತಿಸಿದೆ)** ಈ ಪ್ರಕರಣದಲ್ಲಿ ಆರೋಪಿತ ಅಧಿಕಾರಿ/ ಸಿಬ್ಬಂದಿಗಳ ಮೇಲೆ ದಿನಾಂಕ 01-07-2020 ರಲ್ಲಿ ದೋಷಾರೋಪಣಾ ಪಟ್ಟಿ ಜಾರಿ ಮಾಡಲಾಗಿರುತ್ತದೆ.
ಇ	ತಪ್ಪಿತಸ್ಥರ ನಷ್ಟ ವಸೂಲಾತಿ ಮಾಡಿ ತನಿಖೆ ಮುಕ್ತಾಯಗೊಳಿಸುವುದು ಯಾವಾಗ?	ಪ್ರಕರಣದ ಇಲಾಖಾ ವಿಚಾರಣೆ ಪ್ರಗತಿಯಲ್ಲಿದ್ದು, ವಿಚಾರಣಾಧಿಕಾರಿಯ ಶಿಫಾರಸ್ಸಿನನ್ವಯ ತಪ್ಪಿತಸ್ಥ ಅಧಿಕಾರಿಗಳ ಮೇಲೆ ಶಿಸ್ತುಕ್ರಮ ಜರುಗಿಸಿ ನಷ್ಟ ವಸೂಲಿಗೆ ಕ್ರಮವಹಿಸಬೇಕಿದೆ.

ಕಡತ ಸಂಖ್ಯೆ: ಗ್ರಾಅಪ:ಅಧಿ- 15/16 :ಆರ್‌ಆರ್‌ಸಿ:2020

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಸಂಖ್ಯೆ:ಗ್ರಾಅಪಂ/ 11 /ಯೋಉಮಾ/2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:02-02-2021

140 U/S
03/02/2021.

ಇವರಿಂದ,
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ,
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನಸಭೆ ಸದಸ್ಯರಾದ ಶ್ರೀ ಶರತ್ ಕುಮಾರ್ ಬಚ್ಚೇಗೌಡ (ಹೊಸಕೋಟೆ) ಇವರ ಚುಕ್ಕೆ ಗುರುತಿಲ್ಲದ ಪ್ರ.ಸಂ. 767 ಕ್ಕೆ ಉತ್ತರಿಸುವ ಕುರಿತು.

ಉಲ್ಲೇಖ: ಕರ್ನಾಟಕ ವಿಧಾನಸಭೆ ಸಚಿವಾಲಯದ ಪತ್ರ ಸಂಖ್ಯೆ:ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.767/2021 ದಿ:23-01-21

****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ ಪತ್ರದಲ್ಲಿ ಮಾನ್ಯ ವಿಧಾನಸಭೆ ಸದಸ್ಯರಾದ ಶ್ರೀ ಶರತ್ ಕುಮಾರ್ ಬಚ್ಚೇಗೌಡ (ಹೊಸಕೋಟೆ) ಇವರ ಚುಕ್ಕೆ ಗುರುತಿಲ್ಲದ ಪ್ರ.ಸಂ.767 ಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕೋರಲಾದ ಮಾಹಿತಿಯ ಉತ್ತರದ 25 ಪ್ರತಿಗಳನ್ನು ಸಲ್ಲಿಸಿದೆ ಹಾಗೂ ಮಾಹಿತಿಯನ್ನು ಇ-ಮೇಲ್ ಮೂಲಕ ಕಳುಹಿಸಲಾಗಿದೆ.

ತಮ್ಮ ನಂಬುಗೆಯ,

ನಿರ್ದೇಶಕರು,
ಯೋಜನೆ ಉಸ್ತುವಾರಿ ಮತ್ತು ಮಾಹಿತಿ ವಿಭಾಗ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ

ವಿಧಾನ ಸಭೆಯ ಸದಸ್ಯರ ಹೆಸರು : ಶ್ರೀ ಶರತ್ ಕುಮಾರ್ ಬಚ್ಚೇಗೌಡ (ಹೊಸಕೋಟೆ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 767
ಉತ್ತರಿಸಬೇಕಾದ ದಿನಾಂಕ : 03.02.2021
ಉತ್ತರಿಸುವ ಸಚಿವರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕ್ರ. ಸಂ	ಪ್ರಶ್ನೆ	ಇಲಾಖೆಯ ಮಾಹಿತಿ
ಅ	ಹೊಸಕೋಟೆ ವಿಧಾನಸಭಾ ಕ್ಷೇತ್ರಕ್ಕೆ ಕಳೆದ ಎರಡು ವರ್ಷಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಎಸ್.ಸಿಪಿ/ಟಿ.ಎಸ್.ಪಿ. ಯೋಜನೆಯಡಿ ಮಂಜೂರಾದ ಅನುದಾನದ ಮೊತ್ತವೆಷ್ಟು : (ಸಂಪೂರ್ಣ ಮಾಹಿತಿ ನೀಡುವುದು)	ಹೊಸಕೋಟೆ ವಿಧಾನಸಭಾ ಕ್ಷೇತ್ರಕ್ಕೆ ಕಳೆದ ಎರಡು ವರ್ಷಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಎಸ್.ಸಿ.ಪಿ/ಟಿ.ಎಸ್.ಪಿ. ಯೋಜನೆಯಡಿ ಮಂಜೂರಾದ ಅನುದಾನದ ವಿವರವನ್ನು **ಅನುಬಂಧ-1 ಹಾಗೂ ಅನುಬಂಧ-2** ರಲ್ಲಿ ಒದಗಿಸಿದೆ.
ಆ	ಈ ಅನುದಾನದಲ್ಲಿ ಕಳೆದ ಎರಡು ವರ್ಷಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ :	ಈ ಅನುದಾನದಲ್ಲಿ ಕಳೆದ ಎರಡು ವರ್ಷಗಳಲ್ಲಿ ಕೈಗೊಳ್ಳಲಾದ ಕಾಮಗಾರಿಗಳ ವಿವರವನ್ನು **ಅನುಬಂಧ-1 ಹಾಗೂ ಅನುಬಂಧ-2** ರಲ್ಲಿ ಒದಗಿಸಿದೆ..
ಇ	ಈ ಕಾಮಕಾರಿಗಳಿಗೆ ಕಳೆದ ಎರಡು ವರ್ಷಗಳಿಂದ ವೆಚ್ಚ ಮಾಡಲಾಗಿರುವ ಮೊತ್ತವೆಷ್ಟು : (ಕಾಮಗಾರಿವಾರು ವಿವರ ನೀಡುವುದು)	ಈ ಕಾಮಕಾರಿಗಳಿಗೆ ಕಳೆದ ಎರಡು ವರ್ಷಗಳಿಂದ ವೆಚ್ಚ ಮಾಡಲಾಗಿರುವ ಮೊತ್ತದ ವಿವರವನ್ನು **ಅನುಬಂಧ-1 ಹಾಗೂ ಅನುಬಂಧ-2** ರಲ್ಲಿ ಒದಗಿಸಿದೆ.
ಈ	ಈ ಅನುದಾನದಡಿ ಕೈಗೆತ್ತಿಕೊಂಡಿರುವ ಕಾಮಗಾರಿಗಳಲ್ಲಿ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳಾವುವು : (ಕಾಮಗಾರಿವಾರು ವಿವರ ನೀಡುವುದು)	ಈ ಅನುದಾನದಡಿ ಕೈಗೆತ್ತಿಕೊಂಡಿರುವ ಕಾಮಗಾರಿಗಳಲ್ಲಿ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳ ವಿವರವನ್ನು **ಅನುಬಂಧ-1 ಹಾಗೂ ಅನುಬಂಧ-2** ರಲ್ಲಿ ಒದಗಿಸಿದೆ.
ಉ	ಈ ಅನುದಾನದಡಿಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿವೆ ? (ಕಾಮಗಾರಿವಾರು ವಿವರ ನೀಡುವುದು)	ಈ ಅನುದಾನದಡಿಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳು ಪ್ರಸ್ತುತ ಸ್ಥಿತಿಯ ವಿವರವನ್ನು **ಅನುಬಂಧ-1 ಹಾಗೂ ಅನುಬಂಧ-2** ರಲ್ಲಿ ಒದಗಿಸಿದೆ.

ಸಂಖ್ಯೆ: ಗ್ರಾಅಪ 11 ಯೋಉಮಾ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 42 ಟಿಎನ್‌ಆರ್ 2020

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:02-02-2021

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ)
ಬಹುಮಹಡಿ ಕಟ್ಟಡ, ಬೆಂಗಳೂರು-01.

74
3/2/21

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ/~~ಪರಿಷತ್~~,
ವಿಧಾನ ಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆ/~~ಪರಿಷತ್~~ ಸದಸ್ಯರಾದ ಶ್ರೀ/~~ಶ್ರೀಮತಿ~~ ಕೃಷ್ಣಾರೆಡ್ಡಿ ಎಂ. (ಚಿಂತಾಮಣಿ) ಇವರು ಮಂಡಿಸಿರುವ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ:720ಕ್ಕೆ ಉತ್ತರ ನೀಡುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆ/~~ಪರಿಷತ್~~ ಸದಸ್ಯರಾದ ಶ್ರೀ/~~ಶ್ರೀಮತಿ~~ ಕೃಷ್ಣಾರೆಡ್ಡಿ ಎಂ. (ಚಿಂತಾಮಣಿ) ಇವರು ಮಂಡಿಸಿರುವ ಪ್ರಶ್ನೆ ಸಂಖ್ಯೆ:720ಕ್ಕೆ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ನಿಮ್ಮ ನಂಬುಗೆಯ

(ಎಸ್. ಅರುಣ್)
ಶಾಖಾಧಿಕಾರಿ
ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ).

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	720
ಸದಸ್ಯರ ಹೆಸರು	:	ಶ್ರೀ ಕೃಷ್ಣಾರೆಡ್ಡಿ ಎಂ (ಚಿಂತಾಮಣಿ)
ಉತ್ತರಿಸಬೇಕಾದ ದಿನಾಂಕ	:	03-02-2021
ಉತ್ತರಿಸುವ ಸಚಿವರು	:	ಮಾನ್ಯ ಕಂದಾಯ ಸಚಿವರು

	ಪ್ರಶ್ನೆ	ಉತ್ತರ
(ಅ)	ಚಿಂತಾಮಣಿ ತಾಲ್ಲೂಕಿನಲ್ಲಿ 2019-20ನೇ ಸಾಲಿನ ಬರಪರಿಹಾರದ ಸಮಯದಲ್ಲಿ ಕೈಗೊಂಡಿರುವ ಕುಡಿಯುವ ನೀರಿನ ಕಾಮಗಾರಿಗಳಿಗೆ ಅನುದಾನ ಬಿಡುಗಡೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
(ಆ)	ಬಿಡುಗಡೆಯಾಗಿದ್ದಲ್ಲಿ ಅನುದಾನದ ಮೊತ್ತವೆಷ್ಟು;	ಚಿಂತಾಮಣಿ ತಾಲ್ಲೂಕಿನಲ್ಲಿ ಎಸ್.ಡಿ.ಆರ್.ಎಫ್ ಯೋಜನೆಯಡಿಯಲ್ಲಿ 2019-20ನೇ ಸಾಲಿನಲ್ಲಿ 235 ಕೊಳವೆಬಾವಿಗಳಿಗೆ ರೀಡ್ರಿಲ್ ಮಾಡಲು ಮತ್ತು 76 ಪೈಪ್ ಲೈನ್ ಕಾಮಗಾರಿಗಾಗಿ ಒಟ್ಟು 311 ಕಾಮಗಾರಿಗಳಿಗೆ ರೂ.456.26 ಲಕ್ಷಗಳ ಅಂದಾಜು ಪಟ್ಟಿಯೊಂದಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಶೇ.75 ರಷ್ಟು ಅಂದರೆ, ರೂ.342.05 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಪೂರ್ಣಗೊಂಡ ಕಾಮಗಾರಿಗಳನ್ನು ಒಳಗೊಂಡಂತೆ ಒಟ್ಟು ರೂ.400.85ಲಕ್ಷಗಳನ್ನು ಜಿಲ್ಲಾಧಿಕಾರಿಗಳಿಂದ ಬಿಡುಗಡೆ ಮಾಡಲಾಗಿರುತ್ತದೆ.
(ಇ)	ಬಿಡುಗಡೆಯಾದ ಅನುದಾನವನ್ನು ಯಾವ ಯಾವ ಗುತ್ತಿಗೆ ಏಜೆನ್ಸಿಸ್ ರವರಿಗೆ ಪಾವತಿಸಲಾಗಿದೆ;	ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ಇವರಿಂದ ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲೆ ರವರಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.
(ಈ)	ಪಾವತಿಸದಿದ್ದಲ್ಲಿ, ವಿಳಂಬಕ್ಕೆ ಕಾರಣವೇನು; ಯಾವ ಕಾಲಮಿತಿಯೊಳಗೆ ಪೂರ್ಣಗೊಂಡಿರುವ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಲಾಗುವುದು?	ಚಿಂತಾಮಣಿ ತಾಲ್ಲೂಕಿನಲ್ಲಿನ 311 ಕುಡಿಯುವ ನೀರಿನ ಕಾಮಗಾರಿಗಳಿಗೆ ಅನುಮೋದನೆ ನೀಡಿದ ರೂ.456.26 ಲಕ್ಷಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳಿಗೆ ರೂ.400.85 ಲಕ್ಷಗಳ ಬಾಬ್ತನ್ನು ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ಇವರಿಂದ ಬಿಡುಗಡೆ ಮಾಡಲಾಗಿದೆ. ಹೆಚ್ಚುವರಿ ಉಳಿಕೆ ಮೊತ್ತ ರೂ.55.41ಲಕ್ಷಗಳನ್ನು ಬಿಡುಗಡೆ ಮಾಡಲು ಕೋರಿ ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಇವರಿಂದ ಪ್ರಸ್ತಾವನೆ ಬಂದಿದ್ದು ಕಾಮಗಾರಿಗಳ ಮುಕ್ತಾಯದ ವರದಿಯ ಆಧಾರದ ಮೇಲೆ SDRF ಮಾರ್ಗಸೂಚಿ ಅನುಸಾರ ಪರಿಶೀಲಿಸಿ ಅನುದಾನ ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತಿದೆ.

ಕಂಇ 42 ಟಿಎನ್‌ಆರ್ 2021

(ಆರ್. ಅಶೋಕ)
ಕಂದಾಯ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:01/1:ಆರ್ಆರ್ಸಿ:2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,ಬೆಂಗಳೂರು
ದಿನಾಂಕ:02.02.2021.

U/S
77
3/2/21

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ ಸಚಿವಾಲಯ,
ವಿಧಾನ ಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 357ಗೆ ಉತ್ತರವನ್ನು ಒದಗಿಸುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 357 ಗೆ ಉತ್ತರವನ್ನು ಸಿದ್ಧಪಡಿಸಿ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

(ರಮೇಶ್ ಡಿ.ಬಿ)
ಉಪ ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	357
ಸದಸ್ಯರ ಹೆಸರು	ಶ್ರೀ ಕುಮಾರ ಬಂಗಾರಪ್ಪ ಎಸ್. (ಸೊರಬ)
ಉತ್ತರಿಸಬೇಕಾದ ದಿನಾಂಕ	03.02.2021

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	ಸೊರಬ ತಾಲ್ಲೂಕಿನಲ್ಲಿ ಗ್ರಾಮೀಣ ರಸ್ತೆಗಳು ತೀವ್ರ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.
ಆ.	ಬಂದಿದ್ದಲ್ಲಿ, ಪ್ರಸ್ತುತ ಆರ್ಥಿಕ ವೆಚ್ಚದಲ್ಲಿ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡಲಾಗುವುದೇ?	ಪ್ರಸ್ತುತ ಸಾಲಿನಲ್ಲಿ ಪ್ರವಾಹದಿಂದ ಹಾನಿಗೊಳಗಾದ ಗ್ರಾಮೀಣ ರಸ್ತೆ, ಕೆರೆ ಹಾಗೂ ಸೇತುವೆಗಳ ವಿವರಗಳನ್ನು ಮುಖ್ಯ ಇಂಜನಿಯರ್, ಪಿ.ಆರ್.ಇ.ಡಿ. ಹಾಗೂ ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕೆ.ಆರ್.ಆರ್.ಡಿ.ಎ ರವರುಗಳಿಂದ ಪಡೆದು ಕ್ರೋಢೀಕರಿಸಿ ರೂ.110531.61 ಲಕ್ಷಗಳ ಅನುದಾನಕ್ಕೆ ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ರವರಿಗೆ ಅನುದಾನ ಬಿಡುಗಡೆಗೆ ಪ್ರಸ್ತಾವನೆಯನ್ನು ವರದಿ ಮಾಡಲಾಗಿತ್ತು. ಅದರಂತೆ • ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ)ಯು ಶಿವಮೊಗ್ಗ ಜಿಲ್ಲೆಯ ಗ್ರಾಮೀಣ ರಸ್ತೆ ಮತ್ತು ಸೇತುವೆ ಕಾಮಗಾರಿಗಳ ದುರಸ್ತಿಗೆ ಎರಡು ಕಂತುಗಳಲ್ಲಿ ರೂ. 696.90 ಲಕ್ಷಗಳ ಅನುದಾನವನ್ನು ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ. (ವಿವರಗಳನ್ನು ಅನುಬಂಧದಲ್ಲಿ ಲಗತ್ತಿಸಿದೆ) • ಶಿವಮೊಗ್ಗ ಜಿಲ್ಲಾಧಿಕಾರಿಗಳು ಗ್ರಾಮೀಣ ರಸ್ತೆಗಳ ಕಾಮಗಾರಿಗಳ ಆದ್ಯತೆ ಮತ್ತು ಅಗತ್ಯತೆಗನುಗುಣವಾಗಿ ಅನುದಾನವನ್ನು ಬಿಡುಗಡೆ ಮಾಡಬೇಕಿದೆ. • 2020-21ನೇ ಸಾಲಿನಲ್ಲಿ 3054 ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆಯಡಿ ಸೊರಬ ತಾಲ್ಲೂಕಿಗೆ ರೂ. 65.09 ಲಕ್ಷಗಳ ಅನುದಾನ ನಿಗಧಿಪಡಿಸಲಾಗಿದ್ದು, ಕ್ರಿಯಾ

		ಯೋಜನೆ ಅನುಮೋದನೆಯಾಗಿದ್ದು, ಕಾಮಗಾರಿಗು ಪ್ರಗತಿಯಲ್ಲಿದ್ದು, ಅನುದಾನವನ್ನು ನಿರೀಕ್ಷಿಸಲಾಗಿದೆ. ಇದನ್ನು ಹೊರತುಪಡಿಸಿ ಬೇರೆ ಯಾವುದೇ ಲೆಕ್ಕ ಶೀರ್ಷಿಕೆಯಲ್ಲಿ ಪ್ರಸಕ್ತ ಸಾಲಿನ್ನಲಿ ಕ್ರಿಯಾ ಯೋಜನೆ ಅನುಮೋದನೆಗೊಂಡಿರುವುದಿಲ್ಲ ಹಾಗೂ ಅನುದಾನ ಬಿಡುಗಡೆಯಾಗಿರುವುದಿಲ್ಲ.

ಕಡತ ಸಂಖ್ಯೆ: ಗ್ರಾಅಪ:ಅಧಿ 15/03: ಆರ್‌ಆರ್‌ಸಿ: 2021

(ಕೆ.ಎಸ್ ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿ 2020ರ ಆಗಸ್ಟ್ ರಿಂದ ಅಕ್ಟೋಬರ್‌ವರೆಗೆ ಅತಿವೃಷ್ಟಿ/ಪ್ರವಾಹದಿಂದ ಹಾನಿಗೊಳಗಾದ ಮೂಲಸೌಕರ್ಯಗಳ ತುರ್ತು ದುರಸ್ತಿಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಕಂಇ 579 ಟಿಎನ್‌ಆರ್ 2020, ದಿನಾಂಕ:27.11.2020.

*****

ಪ್ರಸ್ತಾವನೆ:

ರಾಜ್ಯದ ಹಲವು ಜಿಲ್ಲೆಗಳಲ್ಲಿ 2020ರ ಆಗಸ್ಟ್, ಸೆಪ್ಟೆಂಬರ್ ಮತ್ತು ಅಕ್ಟೋಬರ್ ಮಾಹೆಗಳಲ್ಲಿ ಸಂಭವಿಸಿದ ಅತಿವೃಷ್ಟಿ/ಪ್ರವಾಹದಿಂದ ಅಪಾರ ಪ್ರಮಾಣದಲ್ಲಿ ಮಾನವ ಜೀವಹಾನಿ, ಜಾನುವಾರು ಹಾನಿ, ಮನೆಹಾನಿ, ಬೆಳೆಹಾನಿ ಹಾಗೂ ಮೂಲ ಸೌಕರ್ಯಗಳ ಹಾನಿ ಉಂಟಾಗಿರುತ್ತದೆ. ಅತಿವೃಷ್ಟಿ/ಪ್ರವಾಹದಿಂದ ಒಟ್ಟಾರೆ ರೂ.24941.73ಕೋಟಿ ಅಂದಾಜು ಹಾನಿಯಾಗಿದ್ದು, ಪ್ರವಾಹ ಪರಿಹಾರ ಕಾರ್ಯಗಳಿಗಾಗಿ ಕೇಂದ್ರ ಸರ್ಕಾರದ SDRF/NDRF ಮಾರ್ಗಸೂಚಿಯಂತೆ ರೂ.2384.89ಕೋಟಿಗಳ ಆರ್ಥಿಕ ನೆರವನ್ನು ಕೋರಿ ಕೇಂದ್ರ ಸರ್ಕಾರಕ್ಕೆ ಮೆಮೋರಂಡಂ ಸಲ್ಲಿಸಲಾಗಿದೆ.

ಪ್ರವಾಹದಿಂದ 37806 ಕಿ.ಮೀ ರಸ್ತೆ, 4084 ಸೇತುವೆಗಳು, 1371 ನೀರಾವರಿ ಯೋಜನೆಗಳು, 630 ಕೆರೆಗಳು, 7606 ಸರ್ಕಾರಿ ಕಟ್ಟಡಗಳು, 747 ಕುಡಿಯುವ ನೀರು ಮತ್ತು ನೈರ್ಮಲ್ಯ ವ್ಯವಸ್ಥೆ, 15881 ವಿದ್ಯುತ್ ಕಂಬಗಳು, 3987 ಕಿ.ಮೀ ವಿದ್ಯುತ್ ತಂತಿಗಳು ಹಾಗೂ 3878 ಟ್ರಾನ್ಸ್‌ಫಾರ್ಮರ್‌ಗಳು ಸೇರಿದಂತೆ ಅಪಾರ ಪ್ರಮಾಣದಲ್ಲಿ ಮೂಲಸೌಕರ್ಯಗಳು ಹಾನಿಯಾಗಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಮೂಲ ಸೌಕರ್ಯಗಳ ತುರ್ತುದುರಸ್ತಿಗಾಗಿ ಮೇಲೆ ಓದಲಾದ ದಿನಾಂಕ:27.11.2020ರ ಆದೇಶದಲ್ಲಿ, ಕೇಂದ್ರ ಸರ್ಕಾರದ SDRF/NDRF ಮಾರ್ಗಸೂಚಿಯಂತೆ ಪ್ರಕೃತಿ ವಿಕೋಪ ಪರಿಹಾರ ನಿಧಿಯಡಿ ರೂ.42300.00ಲಕ್ಷಗಳ ಅನುದಾನವನ್ನು ಬಾಧಿತ ಜಿಲ್ಲೆಗಳಿಗೆ ಮಂಜೂರು ಮಾಡಿ ಆದೇಶಿಸಿದೆ. ಸದರಿ ಅನುದಾನವನ್ನು ಅಗತ್ಯ ಮೂಲ ಸೌಕರ್ಯಗಳ ತುರ್ತು ದುರಸ್ತಿಗಾಗಿ ಇಲಾಖಾವಾರು ಹಂಚಿಕೆ ಮಾಡಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಬಿಡುಗಡೆಗೊಳಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ:

ಸರ್ಕಾರದ ಆದೇಶ ಸಂಖ್ಯೆ: ಕಂಇ 578 ಟಿಎನ್‌ಆರ್ 2020; ಬೆಂಗಳೂರು, ದಿನಾಂಕ:10-12-2020.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ 2020ನೇ ಸಾಲಿನ ಆಗಸ್ಟ್, ಸೆಪ್ಟೆಂಬರ್ ಮತ್ತು ಅಕ್ಟೋಬರ್ ಮಾಹೆಗಳಲ್ಲಿ ಅತಿವೃಷ್ಟಿ/ಪ್ರವಾಹದಿಂದ ಹಾನಿಗೀಡಾದ ಮೂಲಸೌಕರ್ಯಗಳನ್ನು ಕೇಂದ್ರ ಸರ್ಕಾರದ SDRF/NDRF ಮಾರ್ಗಸೂಚಿಯನ್ವಯ ತುರ್ತುದುರಸ್ತಿಗೊಳಿಸಲು ರೂ.42300.00ಲಕ್ಷ (ನಲವತ್ತೆರಡು ಸಾವಿರದ ಮೂರುನೂರು ಲಕ್ಷ ರೂಪಾಯಿಗಳು ಮಾತ್ರ)ಗಳ ಅನುದಾನವನ್ನು ಅನುಬಂಧದಲ್ಲಿರುವಂತೆ ಇಲಾಖಾವಾರು ಹಂಚಿಕೆ ಮಾಡಿ ಪ್ರಕೃತಿ ವಿಕೋಪ ಪರಿಹಾರ ನಿಧಿಯಡಿ ಈ ಕೆಳಕಂಡ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

...2

ರೂ.ಲಕ್ಷಗಳಲ್ಲಿ

ಕ್ರ ಸಂ	ಜಿಲ್ಲೆ	SDRF/NDRF ಮಾರ್ಗಸೂಚಿಯಂತೆ ಮೂಲಸೌಕರ್ಯಗಳಿಗೆ ಬಿಡುಗಡೆ ಮಾಡಿರುವ ಮೊತ್ತ
1	ಚಿಕ್ಕಮಗಳೂರು	3781.55
2	ಯಾದಗಿರಿ	976.52
3	ಹಾಸನ	3575.95
4	ಕೊಡಗು	4682.35
5	ವಿಜಯಪುರ	2961.48
6	ಬಾಗಲಕೋಟೆ	3172.07
7	ಬೆಳಗಾವಿ	1881.67
8	ಗದಗ	690.74
9.	ಉತ್ತರ ಕನ್ನಡ	2176.35
10	ಹಾವೇರಿ	1706.73
11	ದಕ್ಷಿಣ ಕನ್ನಡ	1831.87
12	ರಾಯಚೂರು	1828.82
13	ಧಾರವಾಡ	2284.69
14	ದಾವಣಗೆರೆ	229.75
15	ಶಿವಮೊಗ್ಗ	1532.26
16	ಮೈಸೂರು	993.61
17	ಚಿತ್ರದುರ್ಗ	42.34
18	ಬಳ್ಳಾರಿ	295.21
19	ಕೊಪ್ಪಳ	1282.85
20	ಉಡುಪಿ	1666.17
21	ಕಲಬುರಗಿ	2853.11
22	ಬೀದರ್	1835.91
	ಒಟ್ಟು	42300.00

(ನಲವತ್ತೆರಡು ಸಾವಿರದ ಮೂರುನೂರು ಲಕ್ಷ ರೂಪಾಯಿಗಳು ಮಾತ್ರ)

ಮೇಲ್ಕಂಡಂತೆ ಬಿಡುಗಡೆ ಮಾಡಲಾದ ಅನುದಾನವನ್ನು ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಮೂಲಸೌಕರ್ಯಗಳ ತುರ್ತು ದುರಸ್ತಿ ಕಾಮಗಾರಿಗಳಿಗೆ ಯೋಜಿತ ಕಾಮಗಾರಿಗಳ ಅನುಸಾರ ಸಂಬಂಧಪಟ್ಟ ಆಯಾ ಇಲಾಖೆಗಳಿಗೆ ವರ್ಗಾಯಿಸತಕ್ಕದ್ದು. ಮೂಲ ಸೌಕರ್ಯಗಳ ದುರಸ್ತಿ ಕಾಮಗಾರಿಗಳಿಗೆ ಜಿಲ್ಲಾಧಿಕಾರಿಗಳ ಮೇಲ್ವಿಚಾರಣೆಯಲ್ಲಿ ಸಂಬಂಧಪಟ್ಟ ಇಲಾಖೆಗಳು ವೆಚ್ಚ ಭರಿಸತಕ್ಕದ್ದು.

ಷರತ್ತುಗಳು:

1) ಮೇಲಿನಂತೆ ಬಿಡುಗಡೆ ಮಾಡಿರುವ ಅನುದಾನವನ್ನು ಕೇಂದ್ರ ಸರ್ಕಾರದ SDRF/NDRF ಮಾರ್ಗಸೂಚಿಯಂತೆ ವೆಚ್ಚ ಭರಿಸತಕ್ಕದ್ದು.
2) ಬಿಡುಗಡೆ ಮಾಡಲಾದ ಅನುದಾನದಿಂದ 2020ರ ಆಗಸ್ಟ್ ರಿಂದ ಅಕ್ಟೋಬರ್ ಮಾಹೆಗಳವರೆಗೆ ಪ್ರವಾಹದಿಂದ ಹಾನಿಯಾದ ರಸ್ತೆಗಳ ದುರಸ್ತಿ, ವಿದ್ಯುತ್ ಪರಿಕರಗಳ ದುರಸ್ತಿ ಹಾಗೂ ಸರ್ಕಾರಿ ಕಟ್ಟಡಗಳ ದುರಸ್ತಿ ಕಾಮಗಾರಿಗಳನ್ನು ಮೊದಲ ಆದ್ಯತೆಯ ಮೇರೆಗೆ ಕೈಗೊಳ್ಳತಕ್ಕದ್ದು.

...3

3) ಅನುದಾನವನ್ನು ಬಳಕೆ ಮಾಡಿದ ಬಗ್ಗೆ, ಲೆಕ್ಕ ಬಳಕೆ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

4) ಬಿಡುಗಡೆಯಾದ ಅನುದಾನದ ಬಳಕೆಯಲ್ಲಿ ಯಾವುದೇ ಲೋಪದೋಷಗಳಾದಲ್ಲಿ ಅಥವಾ ದುರ್ಬಳಕೆಯಾದಲ್ಲಿ ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಯವರನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

ಮೇಲಿನಂತೆ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಿರುವ ಅನುದಾನವನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಇವರ ಪರವಾಗಿ ಸರ್ಕಾರದ ಅಧೀನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3) ಇವರು ಪೇಯೀಸ್ ರಶೀದಿ ಮೂಲಕ ರಾಜ್ಯ ವಿಪತ್ತು ಪರಿಹಾರ ನಿಧಿಯ "ಲೆಕ್ಕ ಶೀರ್ಷಿಕೆ:2245-80-102-0-01-139(ಪ್ರಧಾನ ಕಾಮಗಾರಿಗಳು)" ಅಡಿಯಲ್ಲಿ ಡ್ರಾ ಮಾಡಿ ಸಂಬಂಧಿಸಿದ ಜಿಲ್ಲೆಯ ಜಿಲ್ಲಾಧಿಕಾರಿಗಳ ಎಸ್.ಡಿ.ಆರ್.ಎಫ್. ಪಿಡಿ ಖಾತೆಗೆ ಜಮಾ ಮಾಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 464 ವೆಚ್ಚ-7 2020, ದಿನಾಂಕ:21.11.2020 ಮತ್ತು ದಿನಾಂಕ:05.12.2020 ರಲ್ಲಿ ನೀಡಿರುವ ಸಹಮತದ ಅನುಸಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Rashmi H-L
(ರಶ್ಮಿ ಎಂ.ಎಸ್.) 10/12
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಪಿ.ಬಿ.ನಂ. 5329/5369 ಪಾರ್ಕ್ ಹೌಸ್ ರೋಡ್, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಪಿ.ಬಿ.ನಂ.5398, ನ್ಯೂ ಬಿಲ್ಡಿಂಗ್ 'ಆಡಿಟ್ ಭವನ' ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಪಿ.ಬಿ.ನಂ.5398, ನ್ಯೂ ಬಿಲ್ಡಿಂಗ್ 'ಆಡಿಟ್ ಭವನ' ಬೆಂಗಳೂರು.
4. ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ಜಂಟಿ ನಿರ್ದೇಶಕರು, ಟಿಎನ್‌ಎಂಸಿ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
7. ಉಪ ನಿರ್ದೇಶಕರು, ಖಜಾನೆ ನೆಟ್ ವರ್ಕ್ ಮ್ಯಾನೇಜ್ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
8. ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾ ಖಜಾನಾಧಿಕಾರಿಗಳು.

ಪ್ರತಿ:

1. ಮಾನ್ಯ ಮುಖ್ಯ ಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

...4

3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಇಂಧನ ಇಲಾಖೆ. ವಿಕಾಸ ಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿ.ವಿ) ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ) ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
12. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಇವರ ಆಪ್ತ ಸಹಾಯಕರು ಬೆಂಗಳೂರು.
13. ಸರ್ಕಾರದ ಅಪರ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿ.ವಿ ಮತ್ತು ನೋಂ & ಮು) ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
14. ಕಂದಾಯ ಇಲಾಖೆ (ವಿ.ವಿ) ಲೆಕ್ಕ ಪತ್ರ ಶಾಖೆ.
15. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

ಸರ್ಕಾರದ ಆದೇಶ ಸಂಖ್ಯೆ: ಕಂಇ 578 ಟಿಎಸ್‌ಆರ್ 2020; ದಿನಾಂಕ: 10-12-2020ರ ಅನುಬಂಧ

ಕ್ರ.ಸಂ.	ಜಿಲ್ಲೆ	ಜಿಲ್ಲಾವಾರು ಅನುದಾನ ಬಿಡುಗಡೆ / ಇಲಾಖಾವಾರು (ರೂ. ಲಕ್ಷಗಳಲ್ಲಿ)						
		ಲೋ.ಇ - ರಾಜ್ಯ ಹೆದ್ದಾರಿ ಹಾಗೂ ಎಂಡಿಆರ್	ಗ್ರಾ.ಅ ಮತ್ತು ಪಂ.ರಾ. ಇಲಾಖೆ - ಗ್ರಾಮೀಣ ರಸ್ತೆ ಮತ್ತು ಸೇತುವೆಗಳು	ಇಂಧನ ಇಲಾಖೆ - ವಿದ್ಯುತ್ ಪರಿವರ್ತಕಗಳು	ಶಿಕ್ಷಣ ಇಲಾಖೆ - ಪ್ರಾಥಮಿಕ ಶಾಲೆ	ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ - (ಅಂಗನವಾಡಿ)	ಆ ಮತ್ತು ಕು.ಕ.ಇಲಾಖೆ - ಪಿಹೆಚ್‌ಸಿ	ಒಟ್ಟು
1	ಚಿಕ್ಕಮಗಳೂರು	276.93	1742.24	289.16	693.12	660.09	120.01	3781.55
2	ಯಾದಗಿರಿ	276.93	348.45	302.54	14.36	9.54	24.70	976.52
3	ಹಾಸನ	276.93	871.12	121.65	1215.29	807.76	81.20	3373.95
4	ಕೊಡಗು	55.39	2926.96	1308.88	206.33	137.14	47.65	4682.35
5	ವಿಜಯಪುರ	443.09	1916.47	243.3	204.82	136.13	17.67	2961.48
6	ಬಾಗಲಕೋಟೆ	830.8	871.12	511.45	575.92	382.78	0	3172.07
7	ಬೆಳಗಾವಿ	221.55	871.12	585.33	161.98	41.69	0	1881.67
8	ಗದಗ	166.16	522.67	1.91	0	0	0	690.74
9	ಉತ್ತರ ಕನ್ನಡ	664.67	696.9	420.37	271.57	114.03	8.81	2176.35
10	ಹಾವೇರಿ	276.93	522.67	1.27	544.18	361.68	0	1706.73
11	ದಕ್ಷಿಣ ಕನ್ನಡ	55.39	871.12	143.94	454.24	301.9	5.28	1831.87
12	ರಾಯಚೂರು	609.25	1219.57	0	0	0	0	1828.82
13	ಧಾರವಾಡ	166.16	1045.34	0	644.7	428.49	0	2284.69
14	ದಾವಣಗೆರೆ	110.77	16.42	40.13	33.26	22.1	7.07	229.75
15	ಶಿವಮೊಗ್ಗ	110.77	348.45	120.38	569.12	378.26	5.28	1532.26
16	ಮೈಸೂರು	276.93	348.45	18.47	210.11	139.65	0	993.61
17	ಚಿತ್ರದುರ್ಗ	0	18.44	0	14.36	9.54	0	42.34
18	ಬಳ್ಳಾರಿ	55.39	174.22	65.6	0	0	0	295.21
19	ಕೊಪ್ಪಳ	110.77	174.22	63.06	561.56	373.24	0	1282.85
20	ಉಡುಪಿ	166.16	871.12	591.7	153.43	101.97	1.79	1886.17
21	ಕಲಬುರಗಿ	276.93	871.12	1043.93	437.09	224.04	0	2853.11
22	ಬೀದರ್	110.78	174.23	496.16	592.55	393.34	68.85	1835.91
	ಒಟ್ಟು	5538.68	17422.42	6369.23	7557.99	5023.37	388.31	42300.00

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿ 2020ರ ಆಗಸ್ಟ್, ಸೆಪ್ಟೆಂಬರ್ ಮತ್ತು ಅಕ್ಟೋಬರ್ ಮಾಹೆಗಳಲ್ಲಿ ಸಂಭವಿಸಿದ ಅತಿವೃಷ್ಟಿ/ಪ್ರವಾಹದಿಂದ ಹಾನಿಗೊಳಗಾದ ಮೂಲಸೌಕರ್ಯಗಳ ತುರ್ತು ದುರಸ್ತಿಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ: ಕಂಇ 578 ಟಿಎನ್ಆರ್ 2020, ದಿನಾಂಕ:10.12.2020.

*****

ಪ್ರಸ್ತಾವನೆ:

ರಾಜ್ಯದ ಹಲವು ಜಿಲ್ಲೆಗಳಲ್ಲಿ 2020ರ ಆಗಸ್ಟ್, ಸೆಪ್ಟೆಂಬರ್ ಮತ್ತು ಅಕ್ಟೋಬರ್ ಮಾಹೆಗಳಲ್ಲಿ ಸಂಭವಿಸಿದ ಅತಿವೃಷ್ಟಿ/ಪ್ರವಾಹದಿಂದ ಅಪಾರ ಪ್ರಮಾಣದಲ್ಲಿ ಮಾನವ ಜೀವಹಾನಿ, ಜಾನುವಾರು ಹಾನಿ, ಮನೆಹಾನಿ, ಬೆಳೆಹಾನಿ ಹಾಗೂ ಮೂಲ ಸೌಕರ್ಯಗಳ ಹಾನಿ ಉಂಟಾಗಿರುತ್ತದೆ.

ಮೇಲೆ ಓದಲಾದ ದಿನಾಂಕ:10.12.2020ರ ಸರ್ಕಾರದ ಆದೇಶದಲ್ಲಿ ರೂ.42300.00ಲಕ್ಷಗಳ ಅನುದಾನವನ್ನು ಅಗತ್ಯ ಮೂಲ ಸೌಕರ್ಯಗಳ ತುರ್ತು ದುರಸ್ತಿಗಾಗಿ ಇಲಾಖಾವಾರು ಹಂಚಿಕೆ ಮಾಡಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಬಿಡುಗಡೆಗೊಳಿಸಲಾಗಿದೆ.

ಸೆಪ್ಟೆಂಬರ್ ಮತ್ತು ಅಕ್ಟೋಬರ್ ಮಾಹೆಯಲ್ಲಿ ಉಂಟಾದ ಪ್ರವಾಹ ಪರಿಸ್ಥಿತಿಯ ಕುರಿತು ಕೇಂದ್ರ ಸರ್ಕಾರದ ಅಧ್ಯಯನ ತಂಡವು (IMCT) ದಿನಾಂಕ:13.12.2020 ಮತ್ತು 14.12.2020ರಂದು ರಾಜ್ಯಕ್ಕೆ ಭೇಟಿ ನೀಡಿ, ಪ್ರವಾಹದಿಂದಾದ ಹಾನಿಯ ಕುರಿತು ಅಧ್ಯಯನ ನಡೆಸಿ ನೀಡಲಾದ ಸೂಚನೆಯ ಆಧಾರದ ಮೇಲೆ ರಾಜ್ಯದ ಬಾಧಿತ ಜಿಲ್ಲೆಗಳಲ್ಲಿ ಪ್ರವಾಹದಿಂದ ಹಾನಿಯಾದ ಮೂಲ ಸೌಕರ್ಯ ಹಾನಿಯ ಕುರಿತು ಪರಿಷ್ಕೃತ ವರದಿಯನ್ನು ಜಿಲ್ಲಾಧಿಕಾರಿಗಳಿಂದ ಪಡೆಯಲಾಗಿದೆ. ಅದರಂತೆ, ಆಗಸ್ಟ್ ರಿಂದ ಅಕ್ಟೋಬರ್ ವರೆಗೆ ಪ್ರವಾಹದಿಂದ 36976 ಕಿ.ಮೀ ರಸ್ತೆ, 3946 ಸೇತುವೆಗಳು, 1212 ನೀರಾವರಿ ಯೋಜನೆಗಳು, 614 ಕೆರೆಗಳು, 7433 ಸರ್ಕಾರಿ ಕಟ್ಟಡಗಳು, 720 ಕುಡಿಯುವ ನೀರು ಮತ್ತು ನೈರ್ಮಲ್ಯ ವ್ಯವಸ್ಥೆ, 31423 ವಿದ್ಯುತ್ ಕಂಬಗಳು, 3848 ಕಿ.ಮೀ. ವಿದ್ಯುತ್ ತಂತಿಗಳು ಹಾಗೂ 3956 ಟ್ರಾನ್ಸ್ ಫಾರ್ಮರ್‌ಗಳು ಸೇರಿದಂತೆ ಅಪಾರ ಪ್ರಮಾಣದಲ್ಲಿ ಮೂಲಸೌಕರ್ಯಗಳು ಹಾನಿಯಾಗಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಈ ಹಿನ್ನೆಲೆಯಲ್ಲಿ ದಿನಾಂಕ:10.12.2020ರಂದು ಹೊರಡಿಸಲಾದ ಸರ್ಕಾರದ ಆದೇಶವನ್ನು ಯಥಾವತ್ತಾಗಿ ಹಿಂಪಡೆಯಲು ನಿರ್ಧರಿಸಿ ರೂ.42300.00ಲಕ್ಷಗಳನ್ನು ಮೂಲ ಸೌಕರ್ಯಗಳ ತುರ್ತು ದುರಸ್ತಿಗಾಗಿ ಜಿಲ್ಲಾವಾರು ಅನುದಾನ ಬಿಡುಗಡೆಗೆ ಪರಿಷ್ಕೃತ ಆದೇಶವನ್ನು ಹೊರಡಿಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ:

ಸರ್ಕಾರದ ಆದೇಶ ಸಂಖ್ಯೆ: ಕಂಇ 578 ಟಿಎನ್ಆರ್ 2020;
ಬೆಂಗಳೂರು, ದಿನಾಂಕ:13-01-2021.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ 2020ನೇ ಸಾಲಿನ ಆಗಸ್ಟ್, ಸೆಪ್ಟೆಂಬರ್ ಮತ್ತು ಅಕ್ಟೋಬರ್ ಮಾಹೆಗಳಲ್ಲಿ ಅತಿವೃಷ್ಟಿ/ಪ್ರವಾಹದಿಂದ ಹಾನಿಗೀಡಾದ ಮೂಲಸೌಕರ್ಯಗಳನ್ನು ಕೇಂದ್ರ ಸರ್ಕಾರದ SDRF/NDRF ಮಾರ್ಗಸೂಚಿಯನ್ವಯ ತುರ್ತುದುರಸ್ತಿಗೊಳಿಸಲು ರೂ.42300.00ಲಕ್ಷ (ನಲವತ್ತೆರಡು ಸಾವಿರದ ಮೂರುನೂರು ಲಕ್ಷ ರೂಪಾಯಿಗಳು ಮಾತ್ರ)ಗಳ ಅನುದಾನವನ್ನು ಅನುಬಂಧದಲ್ಲಿರುವಂತೆ ಇಲಾಖಾವಾರು ಹಂಚಿಕೆ ಮಾಡಿ ಪ್ರಕೃತಿ ವಿಕೋಪ ಪರಿಹಾರ ನಿಧಿಯಡಿ ಈ ಕೆಳಕಂಡ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

3) ಅನುದಾನವನ್ನು ಬಳಕೆ ಮಾಡಿದ ಬಗ್ಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

4) ಬಿಡುಗಡೆಯಾದ ಅನುದಾನದ ಬಳಕೆಯಲ್ಲಿ ಯಾವುದೇ ಲೋಪದೋಷಗಳಾದಲ್ಲಿ ಅಥವಾ ದುರ್ಬಳಕೆಯಾದಲ್ಲಿ ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಯವರನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

ಮೇಲಿನಂತೆ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಿರುವ ಅನುದಾನವನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಇವರ ಪರವಾಗಿ ಸರ್ಕಾರದ ಅಧೀನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3) ಇವರು ಪೇಯಿಸ್ ರಶೀದಿ ಮೂಲಕ ರಾಜ್ಯ ವಿಪತ್ತು ಪರಿಹಾರ ನಿಧಿಯ "ಲೆಕ್ಕ ಶೀರ್ಷಿಕೆ:2245-80-102-0-01-139(ಪ್ರಧಾನ ಕಾಮಗಾರಿಗಳು)" ಅಡಿಯಲ್ಲಿ ಡ್ರಾ ಮಾಡಿ ಸಂಬಂಧಿಸಿದ ಜಿಲ್ಲೆಯ ಜಿಲ್ಲಾಧಿಕಾರಿಗಳ ಎಸ್.ಡಿ.ಆರ್.ಎಫ್. ಪಿಡಿ ಖಾತೆಗೆ ಜಮಾ ಮಾಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 464 ವೆಚ್ಚ-7 2020, ದಿನಾಂಕ:21.11.2020, ದಿನಾಂಕ:05.12.2020 ಮತ್ತು ಆಇ 545 ವೆಚ್ಚ-7 2020, ದಿನಾಂಕ:11.01.2021ರಲ್ಲಿ ನೀಡಿರುವ ಸಹಮತದ ಅನುಸಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Rashmi M.S.
13/1/2021
(ರಶ್ಮಿ ಎಂ.ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಪಿ.ಬಿ.ನಂ. 5329/5369 ಪಾರ್ಕ್ ಹೌಸ್ ರೋಡ್, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಪಿ.ಬಿ.ನಂ.5398, ನ್ಯೂ ಬಿಲ್ಡಿಂಗ್ 'ಆಡಿಟ್ ಭವನ' ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಪಿ.ಬಿ.ನಂ.5398, ನ್ಯೂ ಬಿಲ್ಡಿಂಗ್ 'ಆಡಿಟ್ ಭವನ' ಬೆಂಗಳೂರು.
4. ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ಜಂಟಿ ನಿರ್ದೇಶಕರು, ಟಿಎನ್ಎಂಸಿ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
7. ಉಪ ನಿರ್ದೇಶಕರು, ಖಜಾನೆ ನೆಟ್ ವರ್ಕ್ ಮ್ಯಾನೇಜ್ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
8. ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾ ಖಜಾನಾಧಿಕಾರಿಗಳು.

ಪ್ರತಿ:

1. ಮಾನ್ಯ ಮುಖ್ಯ ಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.

ಸರ್ಕಾರದ ಆದೇಶ ಸಂಖ್ಯೆ: ಕಂಇ 578 ಟಿಎನ್‌ಆರ್ 2020, ದಿನಾಂಕ:13.01.2021ಕ್ಕೆ ಅನುಬಂಧ

2020ನೇ ವರ್ಷದ ಆಗಸ್ಟ್, ಸೆಪ್ಟೆಂಬರ್ ಮತ್ತು ಅಕ್ಟೋಬರ್ ಮಾಹೆಗಳಲ್ಲಿ ಅತಿವೃಷ್ಟಿ/ಪ್ರವಾಹದಿಂದ ಹಾನಿಗೀಡಾದ ಮೂಲಸೌಕರ್ಯಗಳ ತುರ್ತು ದುರಸ್ತಿಗಾಗಿ ಜಿಲ್ಲಾವಾರು/ಇಲಾಖಾವಾರು ಅನುದಾನ ಬಿಡುಗಡೆ ವಿವರ

(ರೂ.ಲಕ್ಷಗಳಲ್ಲಿ)

ಕ್ರ.ಸಂ	ಜಿಲ್ಲೆ	ಲೋಕೋಪಯೋಗಿ ಇಲಾಖೆ- ರಾಜ್ಯ ಹೆದ್ದಾರಿ & ಪ್ರಮುಖ ಜಿಲ್ಲಾ ರಸ್ತೆಗಳು	ಗ್ರಾ.ಅ.ಪಂ.ರಾಜ್ ಇಲಾಖೆ- ಗ್ರಾಮೀಣ ರಸ್ತೆಗಳು ಸೇತುವೆಗಳು	ಇಂಧನ ಇಲಾಖೆ	ಪ್ರಾಃ&ಪ್ರೌ.ಶಿಕ್ಷಣ ಇಲಾಖೆ- ಪ್ರಾಥಮಿಕ ಶಾಲೆಗಳು	ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ- ಅಂಗನವಾಡಿಗಳು	ಆ&ಕು.ಕ ಇಲಾಖೆ- ಪ್ರಾಥಮಿಕ ಆರೋಗ್ಯ ಕೇಂದ್ರಗಳು	ಒಟ್ಟು
1	ಚಿಕ್ಕಮಗಳೂರು	147.88	871.12	150.50	1187.36	316.97	78.57	2762.40
2	ಯಾದಗಿರಿ	304.63	343.45	307.00	12.85	2.01	32.35	1007.29
3	ಹಾಸನ	153.98	522.67	51.78	1046.03	792.19	62.40	2639.05
4	ಕೊಡಗು	74.22	2926.97	1323.53	190.46	191.39	62.40	4768.97
5	ವಿಜಯಪುರ	470.79	2090.69	245.85	188.19	308.43	23.10	3327.05
6	ಬಾಗಲಕೋಟೆ	855.71	871.12	517.18	529.82	101.97	0.00	2875.80
7	ಬೆಳಗಾವಿ	253.67	871.12	591.70	56.68	253.18	0.00	2026.35
8	ಗದಗ	197.18	522.67	1.91	0.00	0.00	0.00	721.76
9	ಉತ್ತರ ಕನ್ನಡ	663.53	696.90	425.46	157.96	193.40	11.57	2148.82
10	ಹಾವೇರಿ	298.53	1045.35	1.27	916.03	338.07	0.00	2599.25
11	ದಕ್ಷಿಣ ಕನ್ನಡ	108.00	871.12	145.22	417.20	110.51	6.98	1659.03
12	ರಾಯಚೂರು	613.69	1219.57	0.00	0.00	21.10	0.00	1854.36
13	ಧಾರವಾಡ	176.13	1045.35	0.00	593.30	380.77	0.00	2195.55
14	ದಾವಣಗೆರೆ	102.47	16.42	40.76	30.99	0.00	9.24	199.88
15	ಶಿವಮೊಗ್ಗ	85.30	348.45	122.29	523.01	219.02	6.95	1305.02
16	ಮೈಸೂರು	265.30	348.45	18.47	193.48	0.00	0.00	825.70
17	ಚಿತ್ರದುರ್ಗ	0.00	18.44	0.00	12.85	29.64	0.00	60.93
18	ಬಳ್ಳಾರಿ	67.02	174.22	56.88	0.00	0.00	0.00	298.12
19	ಕೊಪ್ಪಳ	109.67	174.22	51.77	516.97	448.59	0.00	1311.22
20	ಉಡುಪಿ	204.93	871.12	634.38	141.33	87.41	4.62	1943.79
21	ಕಲಬುರ್ಗಿ	266.41	1393.79	1141.38	299.30	516.40	0.00	3617.28
22	ಬೀದರ್	119.64	174.21	501.90	544.18	712.32	90.13	2142.38
	Total	5538.68	17422.42	6349.23	7557.99	5023.37	388.31	42300.00

ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:01/1:ಆರ್‌ಆರ್‌ಸಿ:2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,ಬೆಂಗಳೂರು
ದಿನಾಂಕ:02.02.2021.

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

69
3/2/21

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ ಸಚಿವಾಲಯ,
ವಿಧಾನ ಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:684 ಗೆ ಉತ್ತರವನ್ನು ಒದಗಿಸುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 684 ಗೆ ಉತ್ತರವನ್ನು ಸಿದ್ಧಪಡಿಸಿ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

(ರಮೇಶ್ ಎ.ಓ)
ಉಪ ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	684
ಸದಸ್ಯರ ಹೆಸರು	ಶ್ರೀ ಖಾದರ್ ಯು.ಟಿ (ಮಂಗಳೂರು)
ಉತ್ತರಿಸಬೇಕಾದ ದಿನಾಂಕ	03.02.2021

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	ರಾಜ್ಯದಲ್ಲಿನ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗಾಗಿ ಯಾವ ಯಾವ ಯೋಜನೆಯಡಿಯಲ್ಲಿ ಅನುದಾನವನ್ನು ಬಿಡುಗಡೆ ಮಾಡಿದೆ; ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು;	ರಾಜ್ಯದಲ್ಲಿನ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳಡಿ ಕೆಳಕಂಡಂತೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

(ರೂ. ಕೋಟಿಗಳಲ್ಲಿ)

ಕ್ರ.ಸಂ.	ಯೋಜನೆಗಳು	ಲೆಕ್ಕ ಶೀರ್ಷಿಕೆ	ಪರಿಷ್ಕೃತ ಆಯವ್ಯಯ	ಒಟ್ಟು ಬಿಡುಗಡೆ
01	02	03	04	05
1	ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ	5054-03-337-0-71	909.56	909.56
2	ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ - ನಿರ್ವಹಣೆ	2515-00-101-0-30	45.00	22.50
3	ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ- ನಿರ್ವಹಣೆ	3054-04-337-1-12	69.98	34.99
4	ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ	5054-03-337-0-75	780.00	570.01
5	ನಬಾರ್ಡ್ ರಸ್ತೆ ಮತ್ತು	5054-	82.57	41.29

	ಸೇತುವೆ	03-337-0-74		
6	ರಸ್ತೆ ಸುರಕ್ಷತಾ ಕಾರ್ಯಕ್ರಮ	5054-04-337-0-07	4.00	1.00
7	ಮುಖ್ಯ ಮಂತ್ರಿ ಗ್ರಾಮೀಣ ರಸ್ತೆಗಳ ಅಭಿವೃದ್ಧಿ ಕಾರ್ಯಕ್ರಮ	3054-80-196-1-03-300	200.00	150.00
8	ರಸ್ತೆ ನಿರ್ವಹಣೆ - ಶಾಸಕರ ಟಾಸ್ಕ್ ಫೋರ್ಸ್	3054-80-196-1-01-300	218.73	164.05
	ಒಟ್ಟು		**2309.84**	**1893.39**

ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ.

ಆ.	ಗ್ರಾಮೀಣ ರಸ್ತೆಗಳನ್ನು ಮೇಲ್ಮಟ್ಟಕ್ಕೆ ಏರಿಸುವಲ್ಲಿ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳೇನು? (ವಿವರಗಳನ್ನು ಒದಗಿಸುವುದು)	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲ ಗ್ರಾಮೀಣ ರಸ್ತೆಗಳನ್ನು ಮೇಲ್ಮಟ್ಟಕ್ಕೆ ಏರಿಸುವಲ್ಲಿ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತಿದೆ. • ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ • ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ • ನಬಾರ್ಡ್ ರಸ್ತೆ ಮತ್ತು ಸೇತುವೆ • ರಸ್ತೆ ಸುರಕ್ಷತಾ ಕಾರ್ಯಕ್ರಮ • ಮುಖ್ಯ ಮಂತ್ರಿ ಗ್ರಾಮೀಣ ರಸ್ತೆಗಳ ಅಭಿವೃದ್ಧಿ ಕಾರ್ಯಕ್ರಮ • ರಸ್ತೆ ನಿರ್ವಹಣೆ - ಶಾಸಕರ ಟಾಸ್ಕ್ ಫೋರ್ಸ್ ಹಾಗೂ 2020-21 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಗ್ರಾಮೀಣ ರಸ್ತೆಗಳ ಸುಧಾರಣೆಗಾಗಿ ಹೊಸದಾಗಿ "ಗ್ರಾಮೀಣ ಸುಮಾರ್ಗ ಯೋಜನೆ"ಯನ್ನು ಜಾರಿಗೆ ತರಲು ಪ್ರಸ್ತಾಪಿಸಲಾಗಿದೆ. ಇದರಡಿಯಲ್ಲಿ ಮುಂದಿನ ಐದು ವರ್ಷದಲ್ಲಿ 20,000 ಕಿ.ಮೀ ಗ್ರಾಮೀಣ ರಸ್ತೆ ಅಭಿವೃದ್ಧಿಪಡಿಸಲು ಉದ್ದೇಶಿಸಿ ಘೋಷಣೆ

ಕರ್ನಾಟಕ ಸರ್ಕಾರ

ಸಂಖ್ಯೆ: MWD 15 LMQ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 02-02-2021.

97
ULS
3/2/21

ಇವರಿಂದ,

ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

ಇವರಿಗೆ,

ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ
ಬೆಂಗಳೂರು.

ಮಾನ್ಯರೇ,

ವಿಷಯ : ಶ್ರೀ ಮಸಾಲ ಜಯರಾಮ್ (ತುರುವೇಕೆರೆ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 364 ಉತ್ತರಿಸುವ ಬಗ್ಗೆ.

*****

ಶ್ರೀ ಮಸಾಲ ಜಯರಾಮ್ (ತುರುವೇಕೆರೆ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 364 ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಗೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ

ತಮ್ಮ ವಿಶ್ವಾಸಿ,

(ಎಸ್.ಎಜಾಸ್ ಪಾಷ)
ಶಾಖಾಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	364
ಸದಸ್ಯರ ಹೆಸರು	:	ಶ್ರೀ ಮಸಾಲ ಜಯರಾಮ್ (ತುರುವೇಕೆರೆ)
ಉತ್ತರಿಸಬೇಕಾದ ದಿನಾಂಕ	:	03-02-2021.
ಉತ್ತರಿಸುವ ಸಚಿವರು	:	ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

<table>
<tr><th>ಕ್ರ.ಸಂ.</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ.</td><td>ರಾಜ್ಯದಲ್ಲಿ ಅಲ್ಪಸಂಖ್ಯಾತರ ವರ್ಗದವರಿಗೆ ಸರ್ಕಾರವು ನೀಡಲಾಗುವ ಎಲ್ಲಾ ಬಗೆಯ ಸೌಲಭ್ಯ ಹಾಗೂ ಯೋಜನೆಗಳಾವುವು; (ಜಿಲ್ಲಾವಾರು ಮಾಹಿತಿ ನೀಡುವುದು)</td><td>
<u>ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ</u>
ರಾಜ್ಯದಲ್ಲಿ ಅಲ್ಪಸಂಖ್ಯಾತ ವರ್ಗದವರಿಗೆ ಈ ಕೆಳಕಂಡ ಸೌಲಭ್ಯ ಹಾಗೂ ಯೋಜನೆಗಳನ್ನು ನೀಡಲಾಗುತ್ತಿದೆ.
<table>
<tr><th>ಕ್ರ.ಸಂ</th><th>ಯೋಜನೆಗಳ ವಿವರ</th></tr>
<tr><td>1</td><td>ನಿರ್ದೇಶನ ಮತ್ತು ಆಡಳಿತ</td></tr>
<tr><td>2</td><td>ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿ</td></tr>
<tr><td>3</td><td>ಜೈನ್, ಬೌದ್ಧ ಮತ್ತು ಸಿಖ್ ಸಮುದಾಯದ ಅಭಿವೃದ್ಧಿ</td></tr>
<tr><td>4</td><td>ಸರ್ಕಾರಿ ಅಲ್ಪಸಂಖ್ಯಾತರ ಶಾಲೆಗಳಿಗೆ ಶಿಕ್ಷಣ ಮತ್ತು ಕಲಿಕೆ ಸಾಧನಗಳು</td></tr>
<tr><td>5</td><td>ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಉತ್ತೇಜನ</td></tr>
<tr><td>6</td><td>ಅಲ್ಪಸಂಖ್ಯಾತರಿಗೆ ವಿದ್ಯಾರ್ಥಿವೇತನ ಮತ್ತು ಶುಲ್ಕ ಮರುಪಾವತಿ</td></tr>
<tr><td>7</td><td>ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ</td></tr>
<tr><td>8</td><td>ಅಲ್ಪಸಂಖ್ಯಾತರಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ</td></tr>
<tr><td>9</td><td>ಮದರಸಾಗಳಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸುವುದು</td></tr>
<tr><td>10</td><td>ಅಲ್ಪಸಂಖ್ಯಾತರಿಗಾಗಿ ನೂತನ ಹಾಸ್ಟೆಲ್‌ಗಳ ಪ್ರಾರಂಭ ಮತ್ತು ಮೌಲಾನಾ ಆಜಾದ್ ಶಾಲೆ/ಕಾಲೇಜುಗಳ ನಿರ್ವಹಣೆ</td></tr>
<tr><td>11</td><td>ಅಲ್ಪಸಂಖ್ಯಾತರ ವಸತಿ ಶಾಲೆಗಳು</td></tr>
<tr><td>12</td><td>11 ಕಾರ್ಪೋರೇಷನ್‌ಗಳಲ್ಲಿ ಅಲ್ಪಸಂಖ್ಯಾತರ ಸ್ಲಮ್/ಕಾಲೋನಿ ಅಭಿವೃದ್ಧಿ ಯೋಜನೆ</td></tr>
<tr><td>13</td><td>ಅಲ್ಪಸಂಖ್ಯಾತರಿಗಾಗಿ ವಸತಿ ನಿಲಯ ಮತ್ತು ವಸತಿ ಶಾಲೆ ಕಟ್ಟಡಗಳ ನಿರ್ಮಾಣ ಅಲ್ಪಸಂಖ್ಯಾತರ ಕಛೇರಿ ಸಂಕೀರ್ಣಗಳು ಮತ್ತು ಉರ್ದು ಸಮಾವೇಶಗಳು ಮತ್ತು ಸಂಸ್ಕೃತಿ ಕೇಂದ್ರ</td></tr>
<tr><td>14</td><td>ಪ್ರಧಾನ ಮಂತ್ರಿ ಜನ ವಿಕಾಸ ಕಾರ್ಯಕ್ರಮ</td></tr>
<tr><td>15</td><td>ಅಲ್ಪಸಂಖ್ಯಾತರಿಗಾಗಿ ಹಾಸ್ಟಲ್‌ಗಳು</td></tr>
<tr><td>16</td><td>ಅಲ್ಪಸಂಖ್ಯಾತರಗಾಗಿ ಕಾನೂನು ಪದವೀಧರರಿಗೆ ತರಬೇತಿ ಭತ್ಯೆ.</td></tr>
<tr><td>17</td><td>ಅಲ್ಪಸಂಖ್ಯಾತರಿಗಾಗಿ ಅನಾಥಾಲಯ</td></tr>
<tr><td>18</td><td>ಕಾರ್ಯಕಾರಿ ಸಿಬ್ಬಂದಿ</td></tr>
</table>
<u>ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ</u>
ಮಾಹಿತಿಯನ್ನು "ಅನುಬಂಧ-1" ರಲ್ಲಿ ನೀಡಲಾಗಿದೆ.
</td></tr>
</table>

ಆ.	ಕಳೆದ ಎರಡು ವರ್ಷಗಳಿಂದ ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಬಿಡುಗಡೆ ಮಾಡಿರುವ ಒಟ್ಟು ಅನುದಾನವೆಷ್ಟು; ಯೋಜನೆವಾರು/ಜಿಲ್ಲಾವಾರು ಖರ್ಚಾಗಿರುವ ಹಾಗೂ ಉಳಿದಿರುವ ಅನುದಾನವೆಷ್ಟು? (ಸಂಪೂರ್ಣ ಮಾಹಿತಿ ನೀಡುವುದು)	<u>ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ</u> ಕಳೆದ ಎರಡು ವರ್ಷಗಳಿಂದ ರಾಜ್ಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಬಿಡುಗಡೆ ಮಾಡಿರುವ ಒಟ್ಟು ಅನುದಾನದ ಯೋಜನೆವಾರು/ ಜಿಲ್ಲಾವಾರು ವಿವರಗಳನ್ನು **"ಅನುಭಂದ-2"**ರಲ್ಲಿ ನೀಡಲಾಗಿದೆ. **<u>ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ</u>** ಮಾಹಿತಿಯನ್ನು **"ಅನುಬಂಧ-3"** ರಲ್ಲಿ ನೀಡಲಾಗಿದೆ.

ಸಂಖ್ಯೆ: MWD 15 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು

<u>ಕರ್ನಾಟಕ ಸರ್ಕಾರ</u>

ಸಂಖ್ಯೆ:ಗ್ರಾಅಪ:01/1:ಆರ್‌ಆರ್‌ಸಿ:2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,ಬೆಂಗಳೂರು
ದಿನಾಂಕ:02.02.2021.

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

108
3/2/21

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ ಸಚಿವಾಲಯ,
ವಿಧಾನ ಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: ಗೆ ಉತ್ತರವನ್ನು ಒದಗಿಸುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 562 ಗೆ ಉತ್ತರವನ್ನು ಸಿದ್ದಪಡಿಸಿ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

(ರಮೇಶ್ ಡಿ.ಓ)
ಉಪ ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	562
ಸದಸ್ಯರ ಹೆಸರು	ಶ್ರೀ ನಿಂಬಣ್ಣನವರ್ ಸಿ.ಎಂ (ಕಲಘಟಗಿ)
ಉತ್ತರಿಸಬೇಕಾದ ದಿನಾಂಕ	03.02.2021

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	ಕಲಘಟಗಿ ಮತಕ್ಷೇತ್ರಕ್ಕೆ 2019-20ರಲ್ಲಿ ಲೆಕ್ಕ ಶೀರ್ಷಿಕೆ: 5054ರಡಿ ಗ್ರಾಮೀಣ ರಸ್ತೆಗಳ ಸುಧಾರಣೆಗಾಗಿ ರೂ. 6.00 ಕೋಟಿಗಳನ್ನು ಕಾಮಗಾರಿಗಾಗಿ ಮಂಜೂರು ಮಾಡಿ ಬಿಡುಗಡೆ ಮಾಡಿದ ನಂತರ ಈ ಅನುದಾನವನ್ನು ತಕ್ಷಣವೇ ಇಲಾಖೆ ವಶಕ್ಕೆ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಪ್ರಸ್ತುತ ಗ್ರಾಮೀಣ ರಸ್ತೆಗಳು ತುಂಬಾ ಹಾಳಾಗಿದ್ದು ಈ ಅನುದಾನವನ್ನು ಯಾವಾಗ ಮಂಜೂರು ಮಾಡಲಾಗುವುದು?	ಬಂದಿದೆ, 2019-20ನೇ ಸಾಲಿನ ಲೆ.ಶೀ: 5054ರಡಿ ಕಲಘಟಗಿ ಮತಕ್ಷೇತ್ರಕ್ಕೆ ರೂ. 6.00 ಕೋಟಿಗಳ ಮೊತ್ತದ ರಸ್ತೆ ಕಾಮಗಾರಿಗಳನ್ನು ಮಂಜೂರು ಮಾಡಿ ನಂತರ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/143-13/ಆರ್‌ಆರ್‌ಸಿ/2020, ದಿ:21.03.2020ರ ಆದೇಶದಲ್ಲಿ ರೂ. 6.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿತ್ತು. ಮಾರ್ಚ್-2020ರಲ್ಲಿ ಕೋವಿಡ್-19 ವ್ಯಾಪಕವಾಗಿ ಹರಡುತ್ತಿದ್ದರಿಂದ ರಾಜ್ಯದಲ್ಲಿ ಲಾಕ್‌ಡೌನ್ ಜಾರಿಗೊಳಿಸಿದ ಕಾರಣ ಹಾಗೂ ರಾಜ್ಯ ಹುಜೂರು ಖಜಾನೆ ದಿನಾಂಕ: 24.03.2020ರಂದು ಆರ್ಥಿಕ ವರ್ಷ ಮುಕ್ತಾಯಗೊಳಿಸಿದ್ದರಿಂದ ಜಿಲ್ಲಾ ಪಂಚಾಯತ್‌ಗೆ ಅನುದಾನ ಬಿಡುಗಡೆ ಮಾಡಲು ಅಡಚಣೆ ಉಂಟಾಗಿರುತ್ತದೆ. ಪೂರ್ಣಗೊಂಡ ಕಾಮಗಾರಿಗಳ ಬೇಡಿಕೆ ಮತ್ತು ಆರ್ಥಿಕ ಇಲಾಖೆಯು ಒದಗಿಸುವ ಅನುದಾನದ ಲಭ್ಯತೆಯನ್ನಾಧರಿಸಿ ಅನುದಾನವನ್ನು ಮರು ಬಿಡುಗಡೆ ಮಾಡಲು ಕ್ರಮ ವಹಿಸಬೇಕಿದೆ.

ಕಡತ ಸಂಖ್ಯೆ: ಗ್ರಾಅಪ:ಅಧಿ-15/22:ಆರ್‌ಆರ್‌ಸಿ:2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: MWD 27 LMQ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 02-02-2021.

ಇವರಿಂದ,

ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

115
WS
3/2/21

ಇವರಿಗೆ,

ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ
ಬೆಂಗಳೂರು.

ಮಾನ್ಯರೇ,

ವಿಷಯ : ಶ್ರೀ ಪ್ರಿಯಾಂಕ್ ಎಂ. ಖರ್ಗೆ (ಚಿತ್ತಾಪುರ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 706 ಉತ್ತರಿಸುವ ಬಗ್ಗೆ.

*****

ಶ್ರೀ ಪ್ರಿಯಾಂಕ್ ಎಂ. ಖರ್ಗೆ (ಚಿತ್ತಾಪುರ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 706 ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಗೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ

ತಮ್ಮ ವಿಶ್ವಾಸಿ,

(ಎಸ್.ಎಜಾಸ್ ಪಾಷ)
ಶಾಖಾಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	-	706
ಉತ್ತರಿಸಬೇಕಾದ ದಿನಾಂಕ	-	03-02-2021
ಸದಸ್ಯರ ಹೆಸರು	-	ಶ್ರೀ.ಪ್ರಿಯಾಂಕ್ ಎಂ. ಖರ್ಗೆ (ಚಿತ್ತಾಪುರ)
ಉತ್ತರಿಸುವ ಸಚಿವರು	-	ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಎಷ್ಟು ಯೋಜನೆಗಳನ್ನು ರದ್ದುಗೊಳಿಸಲು ಕಾರಣವೇನು; ಹೆಸರುಗಳ ಸಮೇತ ರದ್ದಾದ ಯೋಜನೆಗೆ ಬದಲಾಗಿ ಹೊಸ ಯೋಜನೆಗಳ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?	<u>ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ</u> **<u>ರದ್ದುಗೊಳಿಸಿದ ಯೋಜನೆಗಳು.</u>** 1. ಶಾದಿಮಹಲ್/ಸಮುದಾಯಭವನ. 2. ಮಾನ್ಯ ಮುಖ್ಯ ಮಂತ್ರಿಯವರ ಅಭಿವೃದ್ಧಿ ಯೋಜನೆ. 3. ಬಿದಾಯಿ ಯೋಜನೆ. ಹೊಸ ಯೋಜನೆಗಳ ಬಗ್ಗೆ ಪರಿಶೀಲನೆಯಲ್ಲಿದೆ.

ಸಂಖ್ಯೆ:MWD 27 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:01/1:ಆರ್‌ಆರ್‌ಸಿ:2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,ಬೆಂಗಳೂರು
ದಿನಾಂಕ:02.02.2021.

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

117
3/2/21

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ ಸಚಿವಾಲಯ,
ವಿಧಾನ ಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:708 ಗೆ ಉತ್ತರವನ್ನು ಒದಗಿಸುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಸಭಾ ಸದಸ್ಯರ ಚುಕ್ಕೆ ಗುರುತಿನ/ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 708 ಗೆ ಉತ್ತರವನ್ನು ಸಿದ್ಧಪಡಿಸಿ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

(ರಮೇಶ್ ಬಿ.ಓ)
ಉಪ ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	708
ಸದಸ್ಯರ ಹೆಸರು	ಶ್ರೀ ಪ್ರಿಯಾಂಕ ಎಂ.ಖರ್ಗೆ (ಚಿತ್ತಾಪುರ)
ಉತ್ತರಿಸಬೇಕಾದ ದಿನಾಂಕ	03.02.2021

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	ಕಲಬುರಗಿ ಜಿಲ್ಲೆಗೆ 2019-20 ಮತ್ತು 2020-21ನೇ ಸಾಲಿನ ನಬಾರ್ಡ್ ಯೋಜನೆಯಡಿಯಲ್ಲಿ ಎಷ್ಟು ಅನುದಾನ ಬಿಡುಗಡೆಗೊಳಿಸಲಾಗಿದೆ. ತಾಲ್ಲೂಕು ವಾರು ಮಾಹಿತಿ ನೀಡುವುದು; ಬಿಡುಗಡೆಗೊಳಿಸದಿದ್ದಲ್ಲಿ, ಕಾರಣವೇನು (ವಿವರ ಒದಗಿಸುವುದು)	ಕಲಬುರಗಿ ಜಿಲ್ಲೆಗೆ, 2019-20 ಮತ್ತು 2020-21ನೇ ಸಾಲಿನ ನಬಾರ್ಡ್ ಆರ್.ಐ.ಡಿ.ಎಫ್ ಸಾಮಾನ್ಯ ಮತ್ತು ನಬಾರ್ಡ್ ಕೆರೆ ಯೋಜನೆಯಡಿಯಲ್ಲಿ ತಾಲ್ಲೂಕುವಾರು ಬಿಡುಗಡೆ ಗೊಳಿಸಲಾದ ಅನುದಾನದ ವಿವರಗಳು ಕೆಳಕಂಡಂತಿರುತ್ತದೆ.

ಲೆಕ್ಕ ಶೀರ್ಷಿಕೆ: 5054-03-337-0-74-436 – ರಸ್ತೆ ಮತ್ತು ಸೇತುವೆಗಳು

(ರೂ. ಲಕ್ಷಗಳಲ್ಲಿ)

ಕ್ರಸಂ.	ತಾಲ್ಲೂಕು	ಲೆಕ್ಕ ಶೀರ್ಷಿಕೆ	ಮಂಜೂರಾತಿ	2019-20ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನ	2020-21ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನ
1	ಅಫಜಲಪೂರ	ನಬಾರ್ಡ 24 ರಸ್ತೆ ಮತ್ತು ಸೇತುವೆ	294.00	51.73	223.13
2	ಆಳಂದ		–	–	–
3	ಚಿಂಚೋಳಿ		100.00	15.00	12.51
4	ಚಿತ್ತಾಪೂರ		100.00	34.00	10.00
5	ಕಲಬುರಗಿ		–	–	–
6	ಜೇವರ್ಗಿ		190.00	120.00	48.36
7	ಸೇಡಂ		100.00	79.27	15.00
			784.00	**300.00**	**309.00**

ಲೆಕ್ಕ ಶೀರ್ಷಿಕೆ: 4702-00-101-1-14-436- ಕೆರೆಗಳ ಅಭಿವೃದ್ಧಿ

(ರೂ. ಲಕ್ಷಗಳಲ್ಲಿ)

ಕ್ರಸಂ.	ತಾಲ್ಲೂಕು	ಲೆಕ್ಕ ಶೀರ್ಷಿಕೆ	ಮಂಜೂರಾತಿ	2019-20ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನ	2020-21ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನ
1	ಅಫಜಲಪೂರ	ನಬಾರ್ಡ 22 ಕೆರೆಗಳು	–	–	–
2	ಆಳಂದ		–	–	–
3	ಚಿಂಚೋಳಿ		–	–	–

			4	ಚಿತ್ತಾಪೂರ		64.14	50.36	13.78
			5	ಕಲಬುರಗಿ		–	–	–
			6	ಜೇವರ್ಗಿ		–	–	–
			7	ಸೇಡಂ		46.86	29.64	17.22
				ಒಟ್ಟು		**111.00**	**80.00**	**31.00**

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 43 ಟಿಎನ್ಆರ್ 2020

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 02-02-2021

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ)
ಬಹುಮಹಡಿ ಕಟ್ಟಡ, ಬೆಂಗಳೂರು-01.

163
3/2/21

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ/ಪರಿಷತ್,
ವಿಧಾನ ಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ~~ಸಭೆ~~/ಪರಿಷತ್ ಸದಸ್ಯರಾದ ಶ್ರೀ/~~ಶ್ರೀಮತಿ~~ ಸುಬ್ಬಾರೆಡ್ಡಿ ಎಸ್. ಎನ್. (ಬಾಗೇಪಲ್ಲಿ) ಇವರು ಮಂಡಿಸಿರುವ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 572 ಕ್ಕೆ ಉತ್ತರ ನೀಡುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ~~ಸಭೆ~~/ಪರಿಷತ್ ಸದಸ್ಯರಾದ ಶ್ರೀ/~~ಶ್ರೀಮತಿ~~ ಸುಬ್ಬಾರೆಡ್ಡಿ ಎಸ್. ಎನ್. (ಬಾಗೇಪಲ್ಲಿ) ಇವರು ಮಂಡಿಸಿರುವ ಪ್ರಶ್ನೆ ಸಂಖ್ಯೆ: 572 ಕ್ಕೆ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ನಿಮ್ಮ ನಂಬುಗೆಯ

(ಎಸ್. ಅರುಣ್)
ಶಾಖಾಧಿಕಾರಿ
ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ).

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**572**
ಸದಸ್ಯರ ಹೆಸರು	:	ಶ್ರೀ ಸುಬ್ಬಾರೆಡ್ಡಿ ಎಸ್.ಎನ್ (ಬಾಗೇಪಲ್ಲಿ)
ಉತ್ತರಿಸಬೇಕಾದ ದಿನಾಂಕ	:	03-02-2021
ಉತ್ತರಿಸುವ ಸಚಿವರು	:	ಮಾನ್ಯ ಕಂದಾಯ ಸಚಿವರು

ಪ್ರಶ್ನೆ		ಉತ್ತರ
(ಅ)	2020-21ನೇ ಸಾಲಿನಲ್ಲಿ ಬಾಗೇಪಲ್ಲಿ ಕ್ಷೇತ್ರದಲ್ಲಿ ಸಿ.ಆರ್.ಎಫ್ ಅನುದಾನದಲ್ಲಿ ಬರ ಪರಿಹಾರ ಕಾಮಗಾರಿಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ;	2020-21ನೇ ಸಾಲಿನಲ್ಲಿ ಬಾಗೇಪಲ್ಲಿ ಕ್ಷೇತ್ರದಲ್ಲಿ SDRF ಅನುದಾನದಲ್ಲಿ 127 ಕೊಳವೆಬಾವಿ ರೀಡ್ರಿಲ್ ಕಾಮಗಾರಿಗಳಿಗೆ ರೂ.1,86,04,000/- ಗಳ ಆಡಳಿತಾತ್ಮಕ ಅನುಮೋದನೆಯನ್ನು ನೀಡಿ ಶೇ.75ರಷ್ಟು ಅಂದರೆ ರೂ.139.00ಲಕ್ಷ ಅನುದಾನವನ್ನು ಜಿಲ್ಲಾಧಿಕಾರಿ ಚಿಕ್ಕಬಳ್ಳಾಪುರ ಇವರಿಂದ ಬಿಡುಗಡೆ ಮಾಡಲಾಗಿರುತ್ತದೆ.
(ಆ)	ಗುತ್ತಿಗೆದಾರರಿಗೆ ಎಷ್ಟು ಹಣ ಪಾವತಿ ಮಾಡಲು ಬಾಕಿ ಇದೆ;	ಶೇ.25ರಷ್ಟು ಅಂದರೆ, ರೂ.47.04ಲಕ್ಷಗಳ ಅನುದಾನ ಪಾವತಿ ಮಾಡಲು ಬಾಕಿ ಇರುತ್ತದೆ.
(ಇ)	ಶೇಕಡಾ 75 ರೂ. ರಷ್ಟು ಹಣ ಪಾವತಿ ಮಾಡಿದ್ದೂ ಬಾಕಿ ಇರುವ 25 ರೂ ರಷ್ಟು ಹಣವನ್ನು ಯಾವಾಗ ಪಾವತಿ ಮಾಡಲಾಗುವುದು?	ಹೆಚ್ಚುವರಿ ಅನುದಾನ ಬಿಡುಗಡೆ ಕೋರಿ ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಇವರಿಂದ ಪ್ರಸ್ತಾವನೆ ಬಂದಿದ್ದು ಕಾಮಗಾರಿಗಳ ಮುಕ್ತಾಯದ ವರದಿಯ ಆಧಾರದ ಮೇಲೆ SDRF ಮಾರ್ಗಸೂಚಿ ಅನುಸಾರ ಪರಿಶೀಲಿಸಿ ಅನುದಾನ ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತಿದೆ.

ಕಂಇ 43 ಟಿಎನ್‌ಆರ್ 2021

(ಆರ್. ಅಶೋಕ)
ಕಂದಾಯ ಸಚಿವರು

ಕರ್ನಾಟಕ ಸರ್ಕಾರ

ಸಂ: ಟಿಡಿ 32 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:01.02.2021.

4/5 43

03-02-2021

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಭೀಮಾನಾಯ್ಕ ಎಸ್., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 710 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಭೀಮಾನಾಯ್ಕ ಎಸ್., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 710 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Mala S 01/02/2021
(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 710

ಸದಸ್ಯರ ಹೆಸರು : ಶ್ರೀ ಭೀಮಾ ನಾಯ್ಕ ಎಸ್. (ಹಗರಿಬೊಮ್ಮನಹಳ್ಳಿ)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 03-02-2021

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಹಗರಿಬೊಮ್ಮನಹಳ್ಳಿ ಘಟಕದಲ್ಲಿರುವ ಹಳೆಯ ಬಸ್‌ಗಳ ಸಂಖ್ಯೆ ಎಷ್ಟು;	ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಹಗರಿಬೊಮ್ಮನಹಳ್ಳಿ ಬಸ್ ಘಟಕದಲ್ಲಿರುವ ಒಟ್ಟು 54 ಬಸ್ಸುಗಳ ಪೈಕಿ 20 ಬಸ್ಸುಗಳು ನಿಗದಿತ 9.00 ಲಕ್ಷ ಕಿ.ಮೀ. ಕ್ರಮಿಸಿರುವ ಹಳೆಯ ಬಸ್ಸುಗಳಿರುತ್ತವೆ.
ಆ)	ಹಳೆಯ ಬಸ್‌ಗಳನ್ನು ಬದಲಾಯಿಸಿ ಹೊಸ ಬಸ್‌ಗಳನ್ನು ನೀಡಲಾಗುವುದೇ; ಹಾಗಿದ್ದಲ್ಲಿ ಎಷ್ಟು ಹೊಸ ಬಸ್‌ಗಳನ್ನು ನೀಡಲಾಗುವುದು?	ಸಾಮಾನ್ಯ ಮಾದರಿಯ ಬಸ್ಸುಗಳ ಜೀವಮಾನವನ್ನು 9.00 ಲಕ್ಷ ಕಿ.ಮೀ. ಹಾಗೂ ಕರೋನಾ ಹವಾನಿಯಂತ್ರಿತ ಬಸ್ಸುಗಳ ಜೀವಮಾನವನ್ನು 11.00 ಲಕ್ಷ ಕಿ.ಮೀ.ಗೆ ನಿಗದಿಪಡಿಸಲಾಗಿರುತ್ತದೆ. ನಿಗದಿಪಡಿಸಿದ ಕಿ.ಮೀ. ಕ್ರಮಿಸಿದ ನಂತರ ಅ ಬಸ್ಸಿನ ಸ್ಥಿತಿಗತಿ ಆಧಾರದ ಮೇಲೆ ನಿಷ್ಕ್ರಿಯೆಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಈ ನಿಟ್ಟಿನಲ್ಲಿ ಹಗರಿಬೊಮ್ಮನಹಳ್ಳಿ ಘಟಕದಲ್ಲಿನ ನಿಗದಿತ ಕಿ.ಮೀ. ಕ್ರಮಿಸಿದ 20 ಬಸ್ಸುಗಳ ಭೌತಿಕ ಮತ್ತು ತಾಂತ್ರಿಕ ಸ್ಥಿತಿಗತಿ ಪರಿಶೀಲಿಸಿ ಸ್ಥಿತಿಗತಿ ಉತ್ತಮವಾಗಿದ್ದಲ್ಲಿ ಅವುಗಳ ಕಾರ್ಯಾಚರಣೆಯನ್ನು ಮುಂದುವರೆಸಲಾಗುತ್ತಿದ್ದು, ಸ್ಥಿತಿಗತಿ ಉತ್ತಮವಾಗಿರದಿದ್ದಲ್ಲಿ ಆದ್ಯತೆಯ ಮೇಲೆ ನಿಷ್ಕ್ರಿಯೆಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಪ್ರಸ್ತುತ ಕೋವಿಡ್-19ರ ಪರಿಣಾಮದಿಂದಾಗಿ ಸಂಸ್ಥೆಯಲ್ಲಿ ಬಸ್ಸುಗಳು ಸಹಜ ಕಾರ್ಯಾಚರಣೆಗೊಳ್ಳದೇ ಇದ್ದು, ಸಂಸ್ಥೆಯು ಆರ್ಥಿಕ ಸಂಕಷ್ಟದಲ್ಲಿರುವುದರಿಂದ, ಪ್ರಸಕ್ತ ಸಾಲಿನಲ್ಲಿ ಹೊಸ ಬಸ್ಸುಗಳ ಖರೀದಿಯನ್ನು ಕೈ ಬಿಡಲಾಗಿರುತ್ತದೆ. ಹೊಸ ಬಸ್ಸುಗಳ ಖರೀದಿ ಪ್ರಕ್ರಿಯೆಗೆ ಚಾಲನೆ ದೊರೆತ ಸಂದರ್ಭದಲ್ಲಿ ಘಟಕದ ಅವಶ್ಯಕತೆಗನುಗುಣವಾಗಿ ಹೊಸ ಬಸ್ಸುಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ಟಿಡಿ 32 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ,
ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ, ಡಾ. ಬಿ. ಆರ್. ಅಂಬೇಡ್ಕರ್ ರಸ್ತೆ,
ಬೆಂಗಳೂರು – 560001.
ದೂ. 080–22034625 ಫ್ಯಾಕ್ಸ್: 080–22353932

ದಿನಾಂಕ 02.02.2021

ಸಂಖ್ಯೆ: ಸಿಐ 49 ಎಸ್‌ಪಿಐ 2021

ಇವರಿಂದ,

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ,
ವಿಕಾಸಸೌಧ,
ಬೆಂಗಳೂರು–01.

92
4/5
03/2/21

ಇವರಿಗೆ,

ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ,
ಅಂಚೆ ಪೆಟ್ಟಿಗೆ ಸಂಖ್ಯೆ: 5074,
ವಿಧಾನಸೌಧ, ಬೆಂಗಳೂರು–01.

ಮಾನ್ಯರೇ,

ವಿಷಯ: ಕರ್ನಾಟಕ ವಿಧಾನಸಭಾ ಸದಸ್ಯರಾದ ಶ್ರೀ ಮಂಜುನಾಥ ಆರ್. (ದಾಸರಹಳ್ಳಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 658ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ ಇವರ ಪತ್ರ ಸಂಖ್ಯೆ: ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.658/2021. ದಿನಾಂಕ 23.01.2021.

*****

ದಿನಾಂಕ 03.02.2021 ರಂದು ಉತ್ತರಿಸಬೇಕಾದ ಮೇಲ್ಕಾಣಿಸಿದ ವಿಧಾನಸಭೆಯ ಪ್ರಶ್ನೆಗೆ ಉತ್ತರಗಳ 50 ಪ್ರತಿಗಳನ್ನು ಈ ಮೂಲಕ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

G. Nagarathnamma. 2/2/2021
(ನಾಗರತ್ನಮ್ಮ .ಜಿ)
ಪೀಠಾಧಿಕಾರಿ (ತಾಂತ್ರಿಕ ಕೋಶ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 658

ಸದಸ್ಯರ ಹೆಸರು : ಶ್ರೀ ಮಂಜುನಾಥ ಆರ್. (ದಾಸರಹಳ್ಳಿ)

ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು

ಉತ್ತರಿಸುವ ದಿನಾಂಕ : 03.02.2021

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಎಷ್ಟು ಕಾರ್ಖಾನೆ/ ಕೈಗಾರಿಕೆಗಳು ಕಾರ್ಯ ನಿರ್ವಹಿಸುತ್ತಿವೆ; ಇವುಗಳಿಂದ ಸರ್ಕಾರಕ್ಕೆ (ಕೇಂದ್ರ ಮತ್ತು ರಾಜ್ಯ ಸರ್ಕಾರ) ಎಷ್ಟು ಮೊತ್ತದ ಜಿ.ಎಸ್.ಟಿ ತೆರಿಗೆ ಹಾಗೂ ಸ್ವತ್ತಿಗೆ ಸಂಬಂಧಿಸಿದಂತೆ ಬಿ.ಬಿ.ಎಂ.ಪಿ ಆಸ್ತಿ ತೆರಿಗೆ ಪಾವತಿಯಾಗುತ್ತಿರುವುದು ನಿಜವೆ (ಸಂಪೂರ್ಣ ವಿವರ ನೀಡುವುದು);	ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಸುಮಾರು 10,000 ಎಂಎಸ್‌ಎಂಇ ಹಾಗೂ ಭಾರಿ ಪ್ರಮಾಣದ ಕೈಗಾರಿಕೆಗಳು ಕಾರ್ಯ ನಿರ್ವಹಿಸುತ್ತಿದೆ, ಈ ಕೈಗಾರಿಕೆಗಳಿಂದ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳಿಗೆ ಸುಮಾರು 1200 ಕೋಟಿ ರೂ.ಗಳ ವಾರ್ಷಿಕ ಜಿಎಸ್‌ಟಿ ತೆರಿಗೆ ಸಂದಾಯವಾಗುತ್ತಿದೆ. ಈ ಕೈಗಾರಿಕಾ ಪ್ರದೇಶಗಳಿಗೆ ಸಂಬಂಧಿಸಿದಂತೆ 1587 ಖಾತೆದಾರರಿಂದ 20.78 ಕೋಟಿ ರೂ. ಬೇಡಿಕೆಯಲ್ಲಿ ಬಿಬಿಎಂಪಿ ಗೆ 13.56 ಕೋಟಿ ರೂ.ಗಳ ಆಸ್ತಿ ತೆರಿಗೆ ಪಾವತಿ ಆಗಿರುತ್ತದೆ.
ಆ	ತೆರಿಗೆ ಸಂಗ್ರಹಣಾ ಮೊತ್ತದಲ್ಲಿ ಪೀಣ್ಯ ಕೈಗಾರಿಕಾ ಪ್ರದೇಶಕ್ಕೆ ಮೂಲಭೂತ ಸೌಕರ್ಯ ಒದಗಿಸಲು ವಾರ್ಷಿಕ ಶೇಕಡವಾರು ಎಷ್ಟು ಮೊತ್ತ ಬಳಸಲಾಗುತ್ತಿದೆ; ಬಹು ವರ್ಷಗಳಿಂದ ಸದರಿ ಪ್ರದೇಶವು ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ (ಮಾಹಿತಿ ನೀಡುವುದು);	ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಕಳೆದ ಮೂರು ವರ್ಷಗಳಲ್ಲಿ ಮೂಲಭೂತ ಸೌಕರ್ಯಾಭಿವೃದ್ಧಿಗೆ ಬಿಬಿಎಂಪಿ ವತಿಯಿಂದ ಈ ಕೆಳಕಂಡಂತೆ ಖರ್ಚು ಮಾಡಲಾಗಿರುತ್ತದೆ 1. 2018-19ನೇ ಸಾಲಿನಲ್ಲಿ ರೂ.2407.52 ಲಕ್ಷಗಳು 2. 2019-20ನೇ ಸಾಲಿನಲ್ಲಿ ರೂ.6060.33 ಲಕ್ಷಗಳು 3. 2020-21 ರಲ್ಲಿ ಕೋವಿಡ್-19 ಸಾಂಕ್ರಾಮಿಕ ಪಿಡುಗಿನಿಂದ ಯಾವುದೇ ಮೂಲಭೂತ ಸೌಕರ್ಯ ಕಾಮಗಾರಿಗಳನ್ನು ಹಮ್ಮಿಕೊಳ್ಳಲು ಸಾಧ್ಯವಾಗಿರುವುದಿಲ್ಲ. ಪೀಣ್ಯ ಕೈಗಾರಿಕಾ ಪ್ರದೇಶವು ಅತೀ ಹಳೆಯ ಕೈಗಾರಿಕಾ ಪ್ರದೇಶವಾಗಿದ್ದು ಈ ಪ್ರದೇಶವನ್ನು KIADB ಹಾಗೂ KSSIDC ಅಭಿವೃದ್ಧಿಪಡಿಸಿದ್ದು ಪ್ರಸಕ್ತವಾಗಿ ಕೈಗಾರಿಕಾ ಪ್ರದೇಶದ ನಿರ್ವಹಣೆಗೆ ಬಿಬಿಎಂಪಿಗೆ ವಹಿಸಿಕೊಡಲಾಗಿದೆ. ಈ ಕೈಗಾರಿಕಾ ಪ್ರದೇಶದಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸುತ್ತಿದ್ದು, ಯಾವುದೇ ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿರುವುದಿಲ್ಲ.

		ಅಲ್ಲದೆ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯು ಈ ಪ್ರದೇಶದ ಮೂಲಸೌಲಭ್ಯ ಅಭಿವೃದ್ಧಿಗಾಗಿ 2018-19 ಮತ್ತು 2019-20ನೇ ಸಾಲಿನಲ್ಲಿ ಒಟ್ಟು ರೂ.20.00 ಕೋಟಿಗಳನ್ನು ಬಿಡುಗಡೆ ಮಾಡಿದ್ದು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಮೂಲಕ ಮೂಲ ಸೌಕರ್ಯ ಅಭಿವೃದ್ಧಿಪಡಿಸಲಾಗುತ್ತಿದೆ. ಈ ಪ್ರದೇಶದ ಸುತ್ತಮುತ್ತಲಿನ ಪ್ರದೇಶದಲ್ಲಿ ಕೈಗಾರಿಕೆಗಳ ಯೋಜಿತವಲ್ಲದ ಬೆಳವಣಿಗೆಯಾಗಿದ್ದು ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕಷ್ಟಕರವಾಗಿರುತ್ತದೆ. ಆದ್ದರಿಂದ ಕೈಗಾರಿಕೆಗಳನ್ನು ಈ ಪ್ರದೇಶದಿಂದ ಹೊರಗೆ ಸ್ಥಳಾಂತರಿಸಲು ಡಾಬಸ್‌ಪೇಟೆ, ದೊಡ್ಡಬಳ್ಳಾಪುರ ಮುಂತಾದ ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿ ಪಡಿಸಲಾಗಿದೆ ಹಾಗೂ ಈ ಕೈಗಾರಿಕೆಗಳು ಟೈರ್-2, ಟೈರ್-3 ನಗರ/ ಜಿಲ್ಲೆಗಳಿಗೆ ಸ್ಥಳಾಂತರಿಸಲು ಹೊಸ ಕೈಗಾರಿಕಾ ನೀತಿಯಲ್ಲಿ ವಿಶೇಷ ಸವಲತ್ತುಗಳು/ ಪ್ರೋತ್ಸಾಹಗಳನ್ನು ರಾಜ್ಯ ಸರ್ಕಾರವು ಘೋಷಿಸಿದೆ.
ಇ	ಕೋವಿಡ್-19 ನಿಂದ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಕಾರ್ಖಾನೆಗಳು ಹಾಗೂ ಕೈಗಾರಿಕೆಗಳ ಪುನಃಶ್ಚೇತನಕ್ಕೆ ಆರ್ಥಿಕ ಸಹಾಯ ಒದಗಿಸಲು ಕ್ರಮ ಕೈಗೊಳ್ಳಲಾಗಿದೆಯೇ; ಕ್ರಮ ಕೈಗೊಂಡಲ್ಲಿ ಎಷ್ಟು ಕೈಗಾರಿಕೆಗಳು ಇದರ ಲಾಭ ಪಡೆದಿವೆ; ಪಡೆದಿದ್ದಲ್ಲಿ, ಇದರ ಸಂಪೂರ್ಣ ವಿವರ ನೀಡುವುದು;	ಕೇಂದ್ರ ಸರ್ಕಾರವು ಎಂ.ಎಸ್.ಎಂ.ಇ ಘಟಕಗಳಿಗೆ ಕೋವಿಡ್-19 ಸಂಕಷ್ಟದಿಂದ ಪಾರಾಗಲು ಜಿಇಸಿಎಲ್ (Guaranteed Emergency Credit Line) ಅಡಿ 3 ಲಕ್ಷ ಕೋಟಿ ರೂ.ಗಳ ವಿಶೇಷ ಪ್ಯಾಕೇಜ್‌ನ್ನು ಘೋಷಿಸಿದ ಪರಿಣಾಮವಾಗಿ ಬೆಂಗಳೂರು ನಗರ ಜಿಲ್ಲೆಯಲ್ಲಿ 21266 ಘಟಕಗಳಿಗೆ 2351.38 ಕೋಟಿ ರೂ.ಗಳ ಸಾಲ ಮಂಜೂರು ಮಾಡಿದ್ದು 16044 ಘಟಕಗಳಿಗೆ 1897.92 ಕೋಟಿ ರೂ.ಗಳ ಅಡಿ ಸಾಲ ಬಿಡುಗಡೆ ಮಾಡಿರುತ್ತಾರೆ. ಇವುಗಳಲ್ಲಿ ಬಹುತೇಕ ಪೀಣ್ಯ ಕೈಗಾರಿಕಾ ಪ್ರದೇಶದ ಘಟಕಗಳಾಗಿದ್ದು ಈ ಸೌಲಭ್ಯಗಳನ್ನು ಪಡೆದುಕೊಂಡು ಆರ್ಥಿಕವಾಗಿ ಪುನಃಶ್ಚೇತಗೊಂಡಿರುತ್ತವೆ.
ಈ	ಕೋವಿಡ್-19 ನಿಂದ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಮಿಕರ ಆರ್ಥಿಕ ಪುನಃಶ್ಚೇತನಕ್ಕೆ ಸರ್ಕಾರದ ವತಿಯಿಂದ ಕ್ರಮ ಕೈಗೊಂಡಿದೆಯೇ; ಕೈಗೊಂಡಿದ್ದಲ್ಲಿ, ಎಷ್ಟು ಕಾರ್ಮಿಕರು ಇದರ ಸೌಲಭ್ಯ ಪಡೆದಿರುತ್ತಾರೆ? (ಸಂಪೂರ್ಣ ಮಾಹಿತಿ ಒದಗಿಸುವುದು)	

ಸಿಐ 49 ಎಸ್‌ಪಿಐ 2021

(ಜಗದೀಶ್ ಶೆಟ್ಟರ)

ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು

ಕರ್ನಾಟಕ ಸರ್ಕಾರ

ಸಂ: ಟಿಡಿ 14 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:01.02.2021.

1441
03-02-2021

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಶಿವಾನಂದ ಎಸ್. ಪಾಟೀಲ್. ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 554 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಶಿವಾನಂದ ಎಸ್. ಪಾಟೀಲ್ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 554 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Mala S 01/02/2021
(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 554

ಸದಸ್ಯರ ಹೆಸರು : ಶ್ರೀ ಶಿವಾನಂದ ಎಸ್. ಪಾಟೀಲ್ (ಬಸವನಬಾಗೇವಾಡಿ)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 03-02-2021

ಕ್ರ ಸಂ	ಪ್ರಶ್ನೆ	ಉತ್ತರ
ಅ)	ವಿಜಯಪುರ ಜಿಲ್ಲೆ ನಿಡಗುಂದಿ ತಾಲ್ಲೂಕಿನ ಆಲಮಟ್ಟಿ ಹತ್ತಿರ ಪ್ರಯಾಣಿಕರ ಅನುಕೂಲಕ್ಕಾಗಿ ಬಸ್ ನಿಲ್ದಾಣ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಹೌದು
ಆ)	ಇದಕ್ಕಾಗಿ ಅವಶ್ಯಕ ಜಮೀನನ್ನು ಲೋಕೋಪಯೋಗಿ ಇಲಾಖೆಯಿಂದ ಸಾರಿಗೆ ಇಲಾಖೆಯ ಈಶ್ಯಾನ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗೆ ಹಸ್ತಾಂತರಿಸಲಾಗಿದೆಯೇ;	ವಿಜಯಪುರ ಜಿಲ್ಲೆ ನಿಡಗುಂದಿ ತಾಲ್ಲೂಕಿನ ಆಲಮಟ್ಟಿ ಹತ್ತಿರ ಪ್ರಯಾಣಿಕರ ಅನುಕೂಲಕ್ಕಾಗಿ ಬಸ್ ನಿಲ್ದಾಣ ನಿರ್ಮಿಸುವ ಉದ್ದೇಶಕ್ಕಾಗಿ ಅವಶ್ಯಕ ಜಮೀನನ್ನು ಲೋಕೋಪಯೋಗಿ ಇಲಾಖೆಯಿಂದ ಈಶ್ಯಾನ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗೆ ಹಸ್ತಾಂತರಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ.
ಇ)	ಹಾಗಿದ್ದಲ್ಲಿ, ಪ್ರಯಾಣಿಕರ ಅನುಕೂಲಕ್ಕೆ ಆಲಮಟ್ಟಿ ಹತ್ತಿರ ಅರಳದಿನ್ನಿ ಗ್ರಾಮ ಸರ್ವೆ ನಂಬರ್‌ನಲ್ಲಿ ಗುರುತಿಸಲಾದ ಜಮೀನಿನಲ್ಲಿ ಬಸ್ ನಿಲ್ದಾಣ ನಿರ್ಮಿಸಲು ಕೈಗೊಂಡಿರುವ ಕ್ರಮಗಳೇನು;	ಜಮೀನು ಸಂಸ್ಥೆಗೆ ಹಸ್ತಾಂತರಗೊಂಡ ನಂತರ ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಂಡು ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮ ವಹಿಸಲಾಗುವುದು.
ಈ)	ಬಸ್ ನಿಲ್ದಾಣ ನಿರ್ಮಿಸಲು ತಗುಲುವ ವೆಚ್ಚ ಎಷ್ಟು;	ಬಸ್ ನಿಲ್ದಾಣ ನಿರ್ಮಿಸಲು ಸುಮಾರು ರೂ.150.00 ಲಕ್ಷ ವೆಚ್ಚವಾಗಬಹುದೆಂದು ಅಂದಾಜಿಸಲಾಗಿದೆ.
ಉ)	ಯಾವ ನಿರ್ದಿಷ್ಟ ಕಾಲಮಿತಿಯಲ್ಲಿ ಬಸ್ ನಿಲ್ದಾಣ ನಿರ್ಮಿಸಲಾಗುವುದು?	ಉಪ ಪ್ರಶ್ನೆ 'ಇ'ರಂತೆ

ಸಂಖ್ಯೆ: ಟಿಡಿ 14 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ಸರ್ಕಾರ

ಸಂ:ಟಿಡಿ 10 ಟಿಡಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:01-02-2021.

32
4/S
3/2/21

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೆ,

ವಿಷಯ: ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:678 ಕ್ಕೆ ಉತ್ತರ ನೀಡುವ ಬಗ್ಗೆ.
ಉಲ್ಲೇಖ: ಪ್ರಶಾವಿಸ/15ನೇವಿಸ/9ಅ/ಪ್ರಸಂ.678/2021, ದಿನಾಂಕ:25-01-2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:678ಕ್ಕೆ ಸಂಬಂಧಿಸಿದ ಉತ್ತರದ ಕನ್ನಡ ಭಾಷೆಯ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ಮುಂದುವರೆದು, ಸದರಿ ಉತ್ತರವನ್ನು dsqb-kla-kar@nic.in ಇ-ಮೇಲ್ ಮುಖಾಂತರ ಕಳುಹಿಸಲಾಗಿದೆ.

ತಮ್ಮ ನಂಬುಗೆಯ,
01/02/21
(ರಂಗಪ್ಪ ಕರಿಗಾರ)
ಶಾಖಾಧಿಕಾರಿ, ಸಾರಿಗೆ-2,
ಸಾರಿಗೆ ಇಲಾಖೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 678

ಸದಸ್ಯರ ಹೆಸರು : ಶ್ರೀ ಬಾಲಕೃಷ್ಣ ಸಿ. ಎನ್. (ಶ್ರವಣಬೆಳಗೊಳ)

ಉತ್ತರಿಸಬೇಕಾದ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 03-02-2021

ಕ್ರ ಸಂ.	ಪ್ರಶ್ನೆ	ಉತ್ತರ
ಅ	ಸಾರಿಗೆ ಇಲಾಖೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ತನಿಖಾ ಠಾಣೆಗಳಲ್ಲಿ, ಭ್ರಷ್ಟಾಚಾರ ನಡೆಯುತ್ತಿರುವ ಬಗ್ಗೆ ದಿನಂಪ್ರತಿ ವಾಹನ ಮಾಲೀಕರಿಂದ ದೂರುಗಳು ಮತ್ತು ಮಾಧ್ಯಮಗಳಲ್ಲಿ ಮೋಟಾರ್ ವಾಹನ ತನಿಖಾಧಿಕಾರಿಗಳ ಭ್ರಷ್ಟಾಚಾರದ ಬಗ್ಗೆ ವರದಿಯ್ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದಿಯೇ; ತನಿಖಾ ಠಾಣೆಗಳನ್ನು ಮುಚ್ಚುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಯಾವ ಕಾಲಮಿತಿಯಲ್ಲಿ ಮುಚ್ಚಲಾಗುವುದು (ಪೂರ್ಣ ವಿವರಣೆ ನೀಡುವುದು);	ತನಿಖಾ ಠಾಣೆಗಳಲ್ಲಿ, ಭ್ರಷ್ಟಾಚಾರ ನಡೆಯುತ್ತಿರುವ ಬಗ್ಗೆ ವಾಹನ ಮಾಲೀಕರಿಂದ ದೂರುಗಳು ಮತ್ತು ಮಾಧ್ಯಮಗಳಲ್ಲಿ ಮೋಟಾರ್ ವಾಹನ ತನಿಖಾಧಿಕಾರಿಗಳ ಬಗ್ಗೆ ವರದಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಸಾರಿಗೆ ಇಲಾಖೆಯ ತನಿಖಾ ಠಾಣೆಗಳನ್ನು ಮುಚ್ಚುವ ಪ್ರಸ್ತಾವನೆ ಇರುವುದಿಲ್ಲ. ಸಾರಿಗೆ ಇಲಾಖೆಯ ತನಿಖಾ ಠಾಣೆಗಳು ಪ್ರತಿನಿತ್ಯ 24 ಗಂಟೆಗಳ ಕಾಲ ಕಾರ್ಯನಿರ್ವಹಿಸುತ್ತಿದ್ದು, ಸಾರ್ವಜನಿಕರಿಗೆ ಸೇವೆ ನೀಡುವ ಕಛೇರಿಗಳಾಗಿರುತ್ತವೆ ಹಾಗೂ ಹೊರ ರಾಜ್ಯಗಳಿಂದ ಆಗಮಿಸುವ ವಾಹನಗಳಿಂದ ಕರ್ನಾಟಕ ರಾಜ್ಯಕ್ಕೆ ಸಂದಾಯವಾಗ ಬೇಕಾದ ತೆರಿಗೆ ಮತ್ತು ಶುಲ್ಕಗಳನ್ನು ಹಾಗೂ ಕಾನೂನು ಉಲ್ಲಂಘಿಸುವ ವಾಹನಗಳಿಂದ ದಂಡ ಸಂಗ್ರಹಿಸುವ ಕಾರ್ಯವನ್ನು ಮಾಡುತ್ತಿದ್ದು ಇದರಿಂದ ರಾಜ್ಯ ಸರ್ಕಾರದ ಬೊಕ್ಕಸಕ್ಕೆ ಗಣನೀಯ ಮೊತ್ತದ ರಾಜಸ್ವ ಸಂಗ್ರಹವಾಗುತ್ತಿದೆ. ತನಿಖಾ ಠಾಣೆಗಳನ್ನು ತೆರವುಗೊಳಿಸಿದಲ್ಲಿ ರಾಜ್ಯದ ಬೊಕ್ಕಸಕ್ಕೆ ರಾಜ್ಯಸ್ವ ಸಂಗ್ರಹದಲ್ಲಿ ಕುಂಠಿತವಾಗುವುದಲ್ಲದೆ ಕಾನೂನು ಉಲ್ಲಂಘಿಸಿ ಸಂಚರಿಸುವ ವಾಹನಗಳ ವಿರುದ್ಧ ಕ್ರಮ ಜರುಗಿಸುವುದು ಕಷ್ಟಸಾಧ್ಯವಾಗುವುದರಿಂದ ಗಡಿಭಾಗದಲ್ಲಿ ಸ್ಥಾಪಿಸಲಾಗಿರುವ ತನಿಖಾ ಠಾಣೆಗಳನ್ನು ಮುಂದುವರೆಸುವುದು ಸೂಕ್ತವಾಗಿರುತ್ತದೆ. ತನಿಖಾ ಠಾಣೆಗಳಲ್ಲಿ ಭ್ರಷ್ಟಾಚಾರವನ್ನು ತಡೆಗಟ್ಟುವ ಕುರಿತು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. ಎಲ್ಲಾ ತನಿಖಾ ಠಾಣೆಗಳಲ್ಲಿ CC ಕ್ಯಾಮರಾಗಳನ್ನು ಅಳವಡಿಸಲಾಗಿರುತ್ತದೆ. ಭ್ರಷ್ಟಾಚಾರದ ದೂರುಗಳು ಬಂದ ಪ್ರಕರಣಗಳಲ್ಲಿ ಸಂಬಂಧಿಸಿದ ಸಿಬ್ಬಂದಿಗಳ ವಿರುದ್ಧ ನಿರ್ದಾಕ್ಷಣ್ಯವಾದ ಕ್ರಮವನ್ನು ಕೈಗೊಳ್ಳಲಾಗುತ್ತಿದೆ. ಭ್ರಷ್ಟಾಚಾರ ತಡೆಗಟ್ಟುವಲ್ಲಿ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಆ	ಅಂತರ ರಾಜ್ಯ ವಾಹನಗಳಿಗೆ e-Permit ಜಾರಿಗೆ ತಂದು ಭ್ರಷ್ಟಾಚಾರವನ್ನು ನಿಯಂತ್ರಿಸಿ, ಸರ್ಕಾರಕ್ಕೆ ರಾಜಸ್ವ ಸಂಗ್ರಹಣವನ್ನು ಹೆಚ್ಚಿಸಬಹುದಲ್ಲವೇ, ಯಾವ ಕಾಲಮಿತಿಯಲ್ಲಿ e-Permit ಜಾರಿಗೆ ತರಲಾಗುವುದು;	ಇತರೆ ರಾಜ್ಯಗಳಿಂದ ಕರ್ನಾಟಕ ರಾಜ್ಯಕ್ಕೆ ಬರುವ ಸಾರಿಗೆ ವಾಹನಗಳ ಮಾಲೀಕರು / ಚಾಲಕರು ಆನ್‌ಲೈನ್ ಮೂಲಕ ವಿಶೇಷ ಮತ್ತು ತಾತ್ಕಾಲಿಕ ರಹದಾರಿ ಪಡೆದು ಒಂದು ವಾರ ಅಥವಾ ಒಂದು ತಿಂಗಳ ಅವಧಿಗೆ ತೆರಿಗೆ ಪಾವತಿಸಿ ಕರ್ನಾಟಕ ರಾಜ್ಯದಲ್ಲಿ ಸಂಚರಿಸಲು ಅನುವು ಮಾಡಿಕೊಡಲಾಗಿದೆ ಮತ್ತು ಚೆಕ್‌ಪೋಸ್ಟ್‌ಗಳಲ್ಲಿ ರಹದಾರಿ ಮತ್ತು ತೆರಿಗೆ ಪಾವತಿಸಲು ಕಾಯುವ ಅವಶ್ಯಕತೆ ಇರುವುದಿಲ್ಲ. ಪ್ರಸ್ತುತ ಅಂತರ ರಾಜ್ಯ ವಾಹನಗಳಿಗೆ ಆನ್‌ಲೈನ್ ಪರ್ಮಿಟ್ ವ್ಯವಸ್ಥೆ ಕರ್ನಾಟಕ ರಾಜ್ಯದಲ್ಲಿ ಜಾರಿಯಲ್ಲಿದೆ.
ಇ	ಸಾರಿಗೆ ಇಲಾಖೆಯಲ್ಲಿ ವಾಹನಗಳ ತಪಾಸಣೆಗಾಗಿ ಮೋಟಾರ್ ವಾಹನ ತನಿಖಾಧಿಕಾರಿಗಳು ಉಪಯೋಗಿಸುವ ಜೀಪುಗಳಿಗೆ ತನಿಖಾಧಿಕಾರಿಗಳ ಭ್ರಷ್ಟಾಚಾರ ನಿಯಂತ್ರಿಸುವ ಸಲುವಾಗಿ ಮತ್ತು ಸರ್ಕಾರದ ರಾಜಸ್ವ ಸಂಗ್ರಹಣೆ ಹಿತದೃಷ್ಟಿಯಿಂದ ಜೀಪುಗಳಿಗೆ ಜಿ.ಪಿ.ಆರ್.ಎಸ್. ಸಿಸ್ಟಂ ಅನ್ನು ಅಳವಡಿಸಿ ಕೇಂದ್ರ ಕಛೇರಿಯಲ್ಲಿ Monitoring ಮಾಡುವ ಕಾರ್ಯ ಯೋಜನೆ ಜಾರಿಯಲ್ಲಿದೆಯೇ? ಇದ್ದಲ್ಲಿ ಯಾವ ಕಾಲಮಿತಿಯಲ್ಲಿ ಈ ಕಾರ್ಯವನ್ನು ಮಾಡಲಾಗುವುದು (ಪೂರ್ಣ ಮಾಹಿತಿಯನ್ನು ನೀಡುವುದು);	ಸಾರಿಗೆ ಇಲಾಖೆಯ ಮೋಟಾರು ವಾಹನ ತನಿಖಾಧಿಕಾರಿಗಳು ಪ್ರವರ್ತನ ಕಾರ್ಯಕ್ಕೆ ಉಪಯೋಗಿಸುವ ವಾಹನಗಳಿಗೆ ಜಿ.ಪಿ.ಆರ್.ಎಸ್. ಸಿಸ್ಟಂ ಅನ್ನು ಅಳವಡಿಸಿರುವುದಿಲ್ಲ. ಈ ವಾಹನಗಳಿಗೆ ಜಿ.ಪಿ.ಆರ್.ಎಸ್. ಅಳವಡಿಸುವ ಅವಶ್ಯಕತೆ ಇರುವುದಿಲ್ಲವಾದ್ದರಿಂದ ಅಳವಡಿಸುವ ಯೋಜನೆ ಇರುವುದಿಲ್ಲ.
ಈ	ಸಾರಿಗೆ ಇಲಾಖೆಯಲ್ಲಿ ಭ್ರಷ್ಟಾಚಾರ ಹಣ ದುರುಪಯೋಗ ಮಾಡಿದಂತಹ ಇಲಾಖಾ ನೌಕರರುಗಳಿಗೆ ಕಡ್ಡಾಯ ನಿವೃತ್ತಿಯನ್ನು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? ಇದ್ದಲ್ಲಿ ಯಾವ ಕಾಲಮಿತಿಯಲ್ಲಿ ಕಡ್ಡಾಯ ನಿವೃತ್ತಿಗೊಳಿಸಲಾಗುವುದು ಎಂಬುದರ ಬಗ್ಗೆ ಪೂರ್ಣ ವಿವರ ನೀಡುವುದು:	ಸಾರಿಗೆ ಇಲಾಖೆಯೂ ಸೇರಿದಂತೆ ರಾಜ್ಯ ಸಿವಿಲ್ ಸೇವೆಗೆ ಸೇರಿದ ಅಧಿಕಾರಿ/ ನೌಕರರುಗಳ ವಿರುದ್ಧದ ಭ್ರಷ್ಟಾಚಾರ ರುಜುವಾತಾಗುವ ಪ್ರಕರಣಗಳಲ್ಲಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-8(vi) ರ ಪ್ರಕಾರ ಸಕ್ಷಮ ಪ್ರಾಧಿಕಾರಿಗಳಿಗೆ ಸಂಬಂಧಪಟ್ಟ ಸರ್ಕಾರಿ ಅಧಿಕಾರಿ / ನೌಕರರುಗಳನ್ನು ಸೇವೆಯಿಂದ ಕಡ್ಡಾಯ ನಿವೃತ್ತಿಗೊಳಿಸುವ ದಂಡನೆಯನ್ನು ವಿಧಿಸಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ. ಅದೇ ರೀತಿ ಹಣ ದುರುಪಯೋಗ ರುಜುವಾತಾಗುವ ಪ್ರಕರಣಗಳಲ್ಲಿಯೂ ಸಹ ಸಕ್ಷಮ ಪ್ರಾಧಿಕಾರಿಗಳಿಗೆ ಕಡ್ಡಾಯ ನಿವೃತ್ತಿ ಸೇರಿದಂತೆ ವಿವಿಧ ರೀತಿಯ ದಂಡನೆಗಳನ್ನು ವಿಧಿಸಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ.

ಟಿಡಿ 10 ಟಿಡಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು.

ಕರ್ನಾಟಕ ಸರ್ಕಾರ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಆಯುಕ್ತರವರ ಕಛೇರಿ, ಗ್ರಾ.ಕುನೀ.&.ನೈ.ಇ., 2ನೇ ಮಹಡಿ, "ಇ" ಬ್ಲಾಕ್, ಕೆಹೆಚ್‌ಬಿ ಕಟ್ಟಡ,
ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009. ☎:080-22240508 📠:22240509
ಇ-ಮೇಲ್: krwssd@gmail.com

ಸಂ:ಗ್ರಾಕುನೀ&ನೈಇ/140/ಗ್ರಾನೀಸ(4)2020 ದಿನಾಂಕ:02.02.2021.

3/2/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು-01.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ **ಆಚಾರ್ ಹಾಲಪ್ಪ ಬಸಪ್ಪ (ಯಲಬುರ್ಗ)** ಇವರ **ಚುಕ್ಕೆ ರಹಿತ ಪ್ರಶ್ನೆ** ಸಂ:716ಕ್ಕೆ ಸಂಬಂಧಿಸಿದ ಮೇಲಿನ ಕ್ರಮ/ವಾಸ್ತವಿಕ ವರದಿಯ ಉತ್ತರ ನೀಡುವ ಬಗ್ಗೆ.

******

ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ **ಆಚಾರ್ ಹಾಲಪ್ಪ ಬಸಪ್ಪ (ಯಲಬುರ್ಗ)** ಇವರ **ಚುಕ್ಕೆ ರಹಿತ ಪ್ರಶ್ನೆ ಸಂ:716ಕ್ಕೆ** ಉತ್ತರದ **25** ಪ್ರತಿಗಳನ್ನು ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ತಮ್ಮ ವಿಶ್ವಾಸಿ,
2/2/2021
ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಪ್ರತಿಯನ್ನು:
1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರಿಗೆ

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ಆಚಾರ್ ಹಾಲಪ್ಪ ಬಸಪ್ಪ
ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 716
ಉತ್ತರ ದಿನಾಂಕ : 03.02.2021

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕೊಪ್ಪಳ ಜಿಲ್ಲೆ ಯಲಬುರ್ಗಾ-ಕುಷ್ಟಗಿ ಕ್ಷೇತ್ರಗಳ 331 ಜನವಸತಿ ಗ್ರಮಗಳಿಗೆ ಕುಡಿಯುವ ನೀರು ಪೂರೈಕೆ ಮಾಡುವ ಯೋಜನೆ ಜಾರಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಇದ್ದಲ್ಲಿ ಈ ಯೋಜನೆಗೆ ಮೊದಲು ಸರ್ಕಾರದಿಂದ ಅನುಮೋದನೆ ಪಡೆಯಲಾಗಿದೆಯೇ; ಹಾಗಿದ್ದಲ್ಲಿ,ಮ ಮೂಲ ವಿನ್ಯಾಸ, ರೂಪರೇಷೆ ಹಾಗೂ ಮೂಲ ಅಂದಾಜು ಮೊತ್ತವೆಷ್ಟು? (ವಿವರ ಒದಗಿಸುವುದು)	ಕುಷ್ಟಗಿ ಮತ್ತು ಯಲಬುರ್ಗಾ ತಾಲ್ಲೂಕುಗಳ ಎಲ್ಲಾ ಜನವಸತಿಗಳಿಗೆ ಕುಡಿಯುವ ನೀರು ಸರಬರಾಜು ಯೋಜನೆಯನ್ನು DBOT ಅಡಿಯಲ್ಲಿ ತೆಗೆದುಕೊಳ್ಳಲು ಪ್ರಥಮವಾಗಿ 2010-11ನೇ ಸಾಲಿನಲ್ಲಿ 3 ಪ್ಯಾಕೇಜ್‌ನಡಿ ವಿಶ್ವಬ್ಯಾಂಕ್‌ನ ಹೆಚ್ಚುವರಿ ಆರ್ಥಿಕ ನೆರವಿನೊಂದಿಗೆ ರೂ.120.00ಕೋಟಿಗಳಿಗೆ ಟೆಂಡರ್ ಕರೆಯಲಾಗಿತ್ತು. ಸದರಿ ಯೋಜನೆಯ ನೀರು ಸರಬರಾಜು ಮಟ್ಟವು 40 ಎಲ್.ಪಿ.ಸಿ.ಡಿ ಆಗಿತ್ತು. ಈ ಕೆಳಕಂಡ ಕಾಂಪೊನೆಂಟ್‌ಗಳನ್ನು ಅಳವಡಿಸಿಕೊಳ್ಳಲಾಗಿತ್ತು. 1. Head works and Raw water rising main upto WTP and WTP components. 2. Pure water rising main upto MBT's and ZBT's to all villages entry points of Kushtagi taluka. 3. Pure water rising main upto MBT's and ZBT's to all villages entry points of Yalburga taluka. ಸದರಿ ಟೆಂಡರ್‌ನಲ್ಲಿ ಗುತ್ತಿಗೆದಾರರು ರೂ.225.80ಕೋಟಿಗಳನ್ನು ನಮೂದಿಸಿದ್ದರು, ಟೆಂಡರ್ ಪ್ರೀಮಿಯಂ ಶೇ.117.40ರಷ್ಟು ಹೆಚ್ಚಾಗಿದ್ದುದರಿಂದ ಟೆಂಡರ್ ರದ್ದುಪಡಿಸಲಾಯಿತು. ಪುನಃ ಈ ಯೋಜನೆಯನ್ನು ಪರಿಷ್ಕರಿಸಿ ರೂ.259.00ಕೋಟಿಗಳಿಗೆ ಸರ್ಕಾರದ ಆದೇಶ ಸಂ:ಗ್ರಾಅಪ/117/ಗ್ರಾನೀಸ(5)2013, ದಿನಾಂಕ:05.04.2014ರಲ್ಲಿ ಅನುಮೋದನೆ ನೀಡಲಾಗಿತ್ತು. ಸದರಿ ಯೋಜನೆಯನ್ನು 2032ರ ಜನಸಂಖ್ಯೆಗೆ ವಿನ್ಯಾಸಗೊಳಿಸಿದಾಗ WTP Capacity ಹೆಚ್ಚಳವಾಗಿರುತ್ತದೆ ಹಾಗೂ ನೀರು ಸರಬರಾಜು ಮಟ್ಟವನ್ನು 55 ಎಲ್.ಪಿ.ಸಿ.ಡಿಗೆ ವಿನ್ಯಾಸಗೊಳಿಸಲಾಗಿತ್ತು. ಟೆಂಡರ್ ಸಮಯದಲ್ಲಿ ಪೈಪು, ಮರಳು, ಜಲ್ಲಿ ಕಲ್ಲು, ಸಿಮೆಂಟ್, ಕಬ್ಬಿಣ, ಕಾರ್ಮಿಕರ ಬಾಬತ್ತು, ಡೀಸಲ್ ಬಾಬತ್ತು, ಪ್ಲಾಂಟ್ & ಮೆಷಿನರಿ ಹಾಗೂ DI pipes pig Iron wholesale price indexಗಳಿಗೆ 2013-14ನೇ ಸಾಲಿನ ಎಸ್.ಆರ್ ದರಗಳನ್ನು ಅಳವಡಿಸಿದಾಗ ಪರಿಷ್ಕೃತ ಗುತ್ತಿಗೆಗೆ ಇಡಲಾದ ಮೊತ್ತ ರೂ.689.60ಕೊಟಿಗಳಾಗುತ್ತಿತ್ತು. ಕನಿಷ್ಟ ದರಗಳನ್ನು ನಮೂದಿಸದ ಗುತ್ತಿಗೆದಾರರು ರೂ.769.00ಕೋಟಿಗಳಿಗೆ ಸಲ್ಲಿಸಿದ್ದು, ಟೆಂಡರ್ ಪ್ರೀಮಿಯಂ ಶೇ.9.88ರಷ್ಟು ಹೆಚ್ಚಳವಾಗುತ್ತಿತ್ತು. ಮೂಲ ಹಾಗೂ ಪರಿಷ್ಕೃತ ಟೆಂಡರ್ ಮೊತ್ತಗಳಲ್ಲಿ ರೂ.430.60ಕೋಟಿಗಳಷ್ಟು ವ್ಯತ್ಯಾಸವಿದ್ದ
ಇ)	ಈ ಯೋಜನೆಯ ವಿನ್ಯಾಸ, ರೂಪರೇಷೆ ಹಾಗೂ ಅಂದಾಜು ಪಟ್ಟಿಯನ್ನು ಎಷ್ಟು ಬಾರಿ ಬದಲಾವಣೆ ಮಾಡಲಾಗಿದೆ; (ವಿವರ ಒದಗಿಸುವುದು)	
ಈ)	ಈ ಯೋಜನೆಯ ಮೂಲ ವಿನ್ಯಾಸಕ್ಕೂ ಹಾಗೂ ಪ್ರತಿ ಸಲ ಮರು ವಿನ್ಯಾಸಗೊಂಡು ದರ ಪರಿಷ್ಕರಣೆ ಮಾಡಿರುವುದಕ್ಕೂ ಹಾಗೂ ಪ್ರಸಕ್ತ ಇರುವ ವಿನ್ಯಾಸಕ್ಕೂ ಇರುವ ವ್ಯತ್ಯಾಸಗಳೇನು?	

ಕಾರಣದಿಂದ ಸದರಿ ಯೋಜನೆಯ ಬಗ್ಗೆ ವಿಸ್ತೃತವಾಗಿ ಪರಿಶೀಲಿಸಿ ಪಿ.ಎಸ್.ಆರ್ ತಯಾರಿಸಲು ಸೂಚಿಸಲಾಯಿತು. ನಂತರ ಪಿ.ಎಸ್.ಆರ್ ತಯಾರಿಸಲು M/s STUP Consultants ರವರಿಗೆ ಟೆಂಡರ್ ಕರೆದು ವಹಿಸಲಾಯಿತು.

ಅದರಂತೆ ಯೋಜನೆಯನ್ನು ಪರಿಷ್ಕರಿಸಿ ಸರ್ಕಾರದ ಆದೇಶ ಸಂ:ಗ್ರಾಅಪ 185 ಗ್ರಾನೀಸ(5) 2014, ಬೆಂಗಳೂರು, ದಿನಾಂಕ:24.02.2016ರಲ್ಲಿ 2013-14ನೇ ಸಾಲಿನ ದರಗಳನ್ವಯ ರೂ.670.50ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

ತದನಂತರ ಸರ್ಕಾರದ ತೀರ್ಮಾನದಂತೆ ಯೋಜನೆಯನ್ನು 85LPCDಯಂತೆ ಮರು ವಿನ್ಯಾಸಗೊಳಿಸಲಾಗಿದೆ. ತಾಂತ್ರಿಕ ಮೌಲ್ಯಮಾಪನ ಮತ್ತು ವಿಸ್ತೃತ ಯೋಜನಾ ವರದಿ(DSR) ಪರಿಶೀಲನೆಗೆ ರಚಿಸಿದ್ದ ತಾಂತ್ರಿಕ ಸಮಿತಿಯ ನಿರ್ದೇಶನದಂತೆ ಹಾಲಿ ಲಭ್ಯವಿರುವ OHTಗಳ ಜೊತೆಗೆ ಲಭ್ಯವಿಲ್ಲದೆಡೆ ಹೊಸ OHT ನಿರ್ಮಾಣ, SCADA ಅಳವಡಿಸಿರುವುದು, 50% Capacity DG set, Express feeder line, 5 ವರ್ಷಗಳ ವಾರ್ಷಿಕ ಕಾರ್ಯಚರಣೆ ಮತ್ತು ನಿರ್ವಹಣೆ ಹಾಗೂ ಯೋಜನೆಯನ್ನು 2048ರ ಜನಸಂಖ್ಯೆಗೆ ವಿನ್ಯಾಸಗೊಳಿಸಿದ ಕಾರಣಗಳಿಂದ ಯೋಜನೆಯ ಅಂದಾಜು ವೆಚ್ಚ ಪರಿಷ್ಕೃತವಾಗಿರುತ್ತದೆ. ಸದರಿ ಪರಿಷ್ಕೃತ ಅಂದಾಜು ಮೊತ್ತವಾದ ರೂ.762.30ಕೋಟಿಗಳಿಗೆ ಸರ್ಕಾರದ ಆದೇಶ ಸಂ:RDP 64 RWS(5)2017, Date:07.08.2017 ಪರಿಷ್ಕೃತ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

ಕೆ.ಟಿ.ಪಿ.ಪಿ ನಿಯಮಗಳಂತೆ ಟೆಂಡರ್ ಕರೆದು M/s L&T Constructions Pvt, Ltd ರವರ ಆರ್ಥಿಕ ಬಿಡ್ ಅನ್ನು ರೂ.697.90ಕೋಟಿಗಳಿಗೆ ಗುತ್ತಿಗೆಗೆ ವಹಿಸಲಾಗಿದೆ.

ಸದರಿ ಕಾಮಗಾರಿಯು Head works, Booster pumping stations, WTP, Clear water storage reservoirs, Intermediate booster pumping stations, MBR, Raw water rising main, Clear water bulk transmission, OHT's, Electrical works, SCADA and O&M for 5 years ಸೇರಿಸಿ ಟೆಂಡರ್ ಕರೆಯಲಾಗಿದೆ.

ದಿನಾಂಕ:06.10.2017ರಂದು ಕಾ.ಅ, ಗ್ರಾ.ಕು.ನೀ&ನೈ, ವಿಭಾಗ, ಕೊಪ್ಪಳ ರವರು M/s L&T Constructions Pvt, Ltd ರವರೊಂದಿಗೆ ಕರಾರು ಒಪ್ಪಂದವನ್ನು ಮಾಡಿಕೊಂಡಿದ್ದು, ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

ಸಂ:ಗ್ರಾಕುನೀ&ನೈಇ 140 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ಆಚಾರ್ ಹಾಲಪ್ಪ ಬಸಪ್ಪ

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 716

ಉತ್ತರ ದಿನಾಂಕ : 03.02.2021

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕೊಪ್ಪಳ ಜಿಲ್ಲೆ ಯಲಬುರ್ಗಾ-ಕುಷ್ಟಗಿ ಕ್ಷೇತ್ರಗಳ 331 ಜನವಸತಿ ಗ್ರಮಗಳಿಗೆ ಕುಡಿಯುವ ನೀರು ಪೂರೈಕೆ ಮಾಡುವ ಯೋಜನೆ ಜಾರಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಇದ್ದಲ್ಲಿ ಈ ಯೋಜನೆಗೆ ಮೊದಲು ಸರ್ಕಾರದಿಂದ ಅನುಮೋದನೆ ಪಡೆಯಲಾಗಿದೆಯೇ; ಹಾಗಿದ್ದಲ್ಲಿ,ಮ ಮೂಲ ವಿನ್ಯಾಸ, ರೂಪರೇಷೆ ಹಾಗೂ ಮೂಲ ಅಂದಾಜು ಮೊತ್ತವೆಷ್ಟು? (ವಿವರ ಒದಗಿಸುವುದು)	ಕುಷ್ಟಗಿ ಮತ್ತು ಯಲಬುರ್ಗಾ ತಾಲ್ಲೂಕುಗಳ ಎಲ್ಲಾ ಜನವಸತಿಗಳಿಗೆ ಕುಡಿಯುವ ನೀರು ಸರಬರಾಜು ಯೋಜನೆಯನ್ನು DBOT ಅಡಿಯಲ್ಲಿ ತೆಗೆದುಕೊಳ್ಳಲು ಪ್ರಥಮವಾಗಿ 2010-11ನೇ ಸಾಲಿನಲ್ಲಿ 3 ಪ್ಯಾಕೇಜ್‌ನಡಿ ವಿಶ್ವಬ್ಯಾಂಕ್‌ನ ಹೆಚ್ಚುವರಿ ಆರ್ಥಿಕ ನೆರವಿನೊಂದಿಗೆ ರೂ.120.00ಕೋಟಿಗಳಿಗೆ ಟೆಂಡರ್ ಕರೆಯಲಾಗಿತ್ತು. ಸದರಿ ಯೋಜನೆಯ ನೀರು ಸರಬರಾಜು ಮಟ್ಟವು 40 ಎಲ್.ಪಿ.ಸಿ.ಡಿ ಆಗಿತ್ತು. ಈ ಕೆಳಕಂಡ ಕಾಂಪೊನೆಂಟ್‌ಗಳನ್ನು ಅಳವಡಿಸಿಕೊಳ್ಳಲಾಗಿತ್ತು. 1. Head works and Raw water rising main upto WTP and WTP components. 2. Pure water rising main upto MBT's and ZBT's to all villages entry points of Kushtagi taluka. 3. Pure water rising main upto MBT's and ZBT's to all villages entry points of Yalburga taluka. ಸದರಿ ಟೆಂಡರ್‌ನಲ್ಲಿ ಗುತ್ತಿಗೆದಾರರು ರೂ.225.80ಕೋಟಿಗಳನ್ನು ನಮೂದಿಸಿದ್ದರು, ಟೆಂಡರ್ ಪ್ರೀಮಿಯಂ ಶೇ.117.40ರಷ್ಟು ಹೆಚ್ಚಾಗಿದ್ದುದರಿಂದ ಟೆಂಡರ್ ರದ್ದುಪಡಿಸಲಾಯಿತು. ಪುನಃ ಈ ಯೋಜನೆಯನ್ನು ಪರಿಷ್ಕರಿಸಿ ರೂ.259.00ಕೋಟಿಗಳಿಗೆ ಸರ್ಕಾರದ ಆದೇಶ ಸಂ:ಗ್ರಾಅಪ/117/ಗ್ರಾನೀಸ(5)2013, ದಿನಾಂಕ:05.04.2014ರಲ್ಲಿ ಅನುಮೋದನೆ ನೀಡಲಾಗಿತ್ತು. ಸದರಿ ಯೋಜನೆಯನ್ನು 2032ರ ಜನಸಂಖ್ಯೆಗೆ ವಿನ್ಯಾಸಗೊಳಿಸಿದಾಗ WTP Capacity ಹೆಚ್ಚಳವಾಗಿರುತ್ತದೆ ಹಾಗೂ ನೀರು ಸರಬರಾಜು ಮಟ್ಟವನ್ನು 55 ಎಲ್.ಪಿ.ಸಿ.ಡಿಗೆ ವಿನ್ಯಾಸಗೊಳಿಸಲಾಗಿತ್ತು. ಟೆಂಡರ್ ಸಮಯದಲ್ಲಿ ಪೈಪು, ಮರಳು, ಜಲ್ಲಿ ಕಲ್ಲು, ಸಿಮೆಂಟ್, ಕಬ್ಬಿಣ, ಕಾರ್ಮಿಕರ ಬಾಬತ್ತು, ಡೀಸಲ್ ಬಾಬತ್ತು, ಪ್ಲಾಂಟ್ & ಮೆಷಿನರಿ ಹಾಗೂ DI pipes pig Iron wholesale price indexಗಳಿಗೆ 2013-14ನೇ ಸಾಲಿನ ಎಸ್.ಆರ್ ದರಗಳನ್ನು ಅಳವಡಿಸಿದಾಗ ಪರಿಷ್ಕೃತ ಗುತ್ತಿಗೆಗೆ ಇಡಲಾದ ಮೊತ್ತ ರೂ.689.60ಕೋಟಿಗಳಾಗುತ್ತಿತ್ತು. ಕನಿಷ್ಟ ದರಗಳನ್ನು ನಮೂದಿಸದ ಗುತ್ತಿಗೆದಾರರು ರೂ.769.00ಕೋಟಿಗಳಿಗೆ ಸಲ್ಲಿಸಿದ್ದು, ಟೆಂಡರ್ ಪ್ರೀಮಿಯಂ ಶೇ.9.88ರಷ್ಟು ಹೆಚ್ಚಳವಾಗುತ್ತಿತ್ತು. ಮೂಲ ಹಾಗೂ ಪರಿಷ್ಕೃತ ಟೆಂಡರ್ ಮೊತ್ತಗಳಲ್ಲಿ ರೂ.430.60ಕೋಟಿಗಳಷ್ಟು ವ್ಯತ್ಯಾಸವಿದ್ದ
ಇ)	ಈ ಯೋಜನೆಯ ವಿನ್ಯಾಸ, ರೂಪರೇಷೆ ಹಾಗೂ ಅಂದಾಜು ಪಟ್ಟಿಯನ್ನು ಎಷ್ಟು ಬಾರಿ ಬದಲಾವಣೆ ಮಾಡಲಾಗಿದೆ; (ವಿವರ ಒದಗಿಸುವುದು)	
ಈ)	ಈ ಯೋಜನೆಯ ಮೂಲ ವಿನ್ಯಾಸಕ್ಕೂ ಹಾಗೂ ಪ್ರತಿ ಸಲ ಮರು ವಿನ್ಯಾಸಗೊಂಡು ದರ ಪರಿಷ್ಕರಣೆ ಮಾಡಿರುವುದಕ್ಕೂ ಹಾಗೂ ಪ್ರಸಕ್ತ ಇರುವ ವಿನ್ಯಾಸಕ್ಕೂ ಇರುವ ವ್ಯತ್ಯಾಸಗಳೇನು?	

		ಕಾರಣದಿಂದ ಸದರಿ ಯೋಜನೆಯ ಬಗ್ಗೆ ವಿಸ್ತೃತವಾಗಿ ಪರಿಶೀಲಿಸಿ ಪಿ.ಎಸ್.ಆರ್ ತಯಾರಿಸಲು ಸೂಚಿಸಲಾಯಿತು. ನಂತರ ಪಿ.ಎಸ್.ಆರ್ ತಯಾರಿಸಲು M/s STUP Consultants ರವರಿಗೆ ಟೆಂಡರ್ ಕರೆದು ವಹಿಸಲಾಯಿತು. ಅದರಂತೆ ಯೋಜನೆಯನ್ನು ಪರಿಷ್ಕರಿಸಿ ಸರ್ಕಾರದ ಆದೇಶ ಸಂ:ಗ್ರಾಅಪ 185 ಗ್ರಾನೀಸ(5) 2014, ಬೆಂಗಳೂರು, ದಿನಾಂಕ:24.02.2016ರಲ್ಲಿ 2013-14ನೇ ಸಾಲಿನ ದರಗಳನ್ವಯ ರೂ.670.50ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ತದನಂತರ ಸರ್ಕಾರದ ತೀರ್ಮಾನದಂತೆ ಯೋಜನೆಯನ್ನು 85LPCDಯಂತೆ ಮರು ವಿನ್ಯಾಸಗೊಳಿಸಲಾಗಿದೆ. ತಾಂತ್ರಿಕ ಮೌಲ್ಯಮಾಪನ ಮತ್ತು ವಿಸ್ತೃತ ಯೋಜನಾ ವರದಿ(DSR) ಪರಿಶೀಲನೆಗೆ ರಚಿಸಿದ್ದ ತಾಂತ್ರಿಕ ಸಮಿತಿಯ ನಿರ್ದೇಶನದಂತೆ ಹಾಲಿ ಲಭ್ಯವಿರುವ OHTಗಳ ಜೊತೆಗೆ ಲಭ್ಯವಿಲ್ಲದೆಡೆ ಹೊಸ OHT ನಿರ್ಮಾಣ, SCADA ಅಳವಡಿಸಿರುವುದು, 50% Capacity DG set, Express feeder line, 5 ವರ್ಷಗಳ ವಾರ್ಷಿಕ ಕಾರ್ಯಚರಣೆ ಮತ್ತು ನಿರ್ವಹಣೆ ಹಾಗೂ ಯೋಜನೆಯನ್ನು 2048ರ ಜನಸಂಖ್ಯೆಗೆ ವಿನ್ಯಾಸಗೊಳಿಸಿದ ಕಾರಣಗಳಿಂದ ಯೋಜನೆಯ ಅಂದಾಜು ವೆಚ್ಚ ಪರಿಷ್ಕೃತವಾಗಿರುತ್ತದೆ. ಸದರಿ ಪರಿಷ್ಕೃತ ಅಂದಾಜು ಮೊತ್ತವಾದ ರೂ.762.30ಕೋಟಿಗಳಿಗೆ ಸರ್ಕಾರದ ಆದೇಶ ಸಂ:RDP 64 RWS(5)2017, Date:07.08.2017 ಪರಿಷ್ಕೃತ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಕೆ.ಟಿ.ಪಿ.ಪಿ ನಿಯಮಗಳಂತೆ ಟೆಂಡರ್ ಕರೆದು M/s L&T Constructions Pvt, Ltd ರವರ ಆರ್ಥಿಕ ಬಿಡ್ ಅನ್ನು ರೂ.697.90ಕೋಟಿಗಳಿಗೆ ಗುತ್ತಿಗೆಗೆ ವಹಿಸಲಾಗಿದೆ. ಸದರಿ ಕಾಮಗಾರಿಯು Head works, Booster pumping stations, WTP, Clear water storage reservoirs, Intermediate booster pumping stations, MBR, Raw water rising main, Clear water bulk transmission, OHT's, Electrical works, SCADA and O&M for 5 years ಸೇರಿಸಿ ಟೆಂಡರ್ ಕರೆಯಲಾಗಿದೆ. ದಿನಾಂಕ:06.10.2017ರಂದು ಕಾ.ಅ, ಗ್ರಾ.ಕು.ನೀ&ನೈ, ವಿಭಾಗ, ಕೊಪ್ಪಳ ರವರು M/s L&T Constructions Pvt, Ltd ರವರೊಂದಿಗೆ ಕರಾರು ಒಪ್ಪಂದವನ್ನು ಮಾಡಿಕೊಂಡಿದ್ದು, ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

ಸಂ:ಗ್ರಾಕುನೀ&ನೈಇ 140 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂ:ಟಿಡಿ 12 ಟಿಡಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:01-02-2021.

82
U/S
3/2/21

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೆ,

ವಿಷಯ: ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:651 ಕ್ಕೆ ಉತ್ತರ ನೀಡುವ ಬಗ್ಗೆ.
ಉಲ್ಲೇಖ: ಪ್ರಶಾವಿಸ/15ನೇವಿಸ/9ಅ/ಪ್ರಸಂ.651/2021, ದಿನಾಂಕ:23-01-2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಲಿಂಗೇಶ ಕೆ.ಎಸ್. (ಬೇಲೂರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:651ಕ್ಕೆ ಸಂಬಂಧಿಸಿದ ಉತ್ತರದ ಕನ್ನಡ ಭಾಷೆಯ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ಮುಂದುವರೆದು, ಸದರಿ ಉತ್ತರವನ್ನು dsqb-kla-kar@nic.in ಇ-ಮೇಲ್ ಮುಖಾಂತರ ಕಳುಹಿಸಲಾಗಿದೆ.

ತಮ್ಮ ನಂಬುಗೆಯ,
01/02/21
(ರಂಗಪ್ಪ ಕರಿಗಾರ)
ಶಾಖಾಧಿಕಾರಿ, ಸಾರಿಗೆ-2,
ಸಾರಿಗೆ ಇಲಾಖೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 651

ಸದಸ್ಯರ ಹೆಸರು : ಶ್ರೀ ಲಿಂಗೇಶ. ಕೆ.ಎಸ್. (ಬೇಲೂರು)

ಉತ್ತರಿಸಬೇಕಾದ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 03-02-2021

ಕ್ರ ಸಂ.	ಪ್ರಶ್ನೆ	ಉತ್ತರ
(ಅ)	ರಾಜ್ಯದ ಸಾರಿಗೆ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ವೃಂದದ ಮೋಟಾರ್ ವಾಹನ ನಿರೀಕ್ಷಕರ ಹುದ್ದೆಗಳನ್ನು ಲೋಕಸೇವಾ ಆಯೋಗದ ಮುಖೇನ ಆಯ್ಕೆ ಮಾಡಲು ಸರ್ಕಾರವು ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಿರುವುದು ನಿಜವೇ;	ಹೌದು, 150 ಮೋಟಾರು ವಾಹನ ನಿರೀಕ್ಷಕರ ಹುದ್ದೆಗಳ ಭರ್ತಿಗಾಗಿ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.
(ಆ)	ರಾಜ್ಯದ ಸಾರಿಗೆ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ವೃಂದದ ಮೋಟಾರ್ ವಾಹನ ನಿರೀಕ್ಷಕರ ಹುದ್ದೆಗಳನ್ನು ಲೋಕಸೇವಾ ಆಯೋಗದಲ್ಲಿ ನೇಮಕಾತಿ ಮಾಡಲು ಲೋಕಸೇವಾ ಆಯೋಗದ ಕೆಲವು ಅಧಿಕಾರಿಗಳು ಪ್ರಭಾವಕ್ಕೊಳಗಾಗಿ ಬೇರೆ ರಾಜ್ಯದ ವಿಶ್ವವಿದ್ಯಾನಿಲಯಗಳಿಂದ ನಕಲಿ ಅಂಕಪಟ್ಟಿಗಳನ್ನು ಹಾಗೂ ಅರ್ಹತಾ ಪತ್ರಗಳನ್ನು ತಂದು ಸಂದರ್ಶನಕ್ಕೆ ಹಾಜರುಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹವರ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು (ಸಂಪೂರ್ಣ ವಿವರ ನೀಡುವುದು);	ಈ ರೀತಿಯ ಯಾವುದೇ ಪ್ರಕರಣಗಳು ಕಂಡು ಬಂದಿರುವುದಿಲ್ಲ. ಮುಂದುವರೆದು, ಸಾರಿಗೆ ಇಲಾಖೆಯಲ್ಲಿ ಖಾಲಿ ಇರುವ 150 ಮೋಟಾರು ವಾಹನ ನಿರೀಕ್ಷಕರುಗಳ ಹುದ್ದೆಗಳ ಭರ್ತಿಗಾಗಿ ಕರ್ನಾಟಕ ಲೋಕಾಸೇವಾ ಆಯೋಗವು ದಿನಾಂಕ: 18-01-2020ರ ಪತ್ರದಲ್ಲಿ ನೇಮಕಾತಿ ಕುರಿತು ಕೈಗೊಳ್ಳಬೇಕಾದ ಕ್ರಮದ ಕುರಿತು ಸರ್ಕಾರದ ಅಭಿಪ್ರಾಯವನ್ನು ನೀಡುವಂತೆ ಕೋರಲಾಗಿತ್ತು. ಅದರಂತೆ, ಸರ್ಕಾರದ ದಿನಾಂಕ: 19-03-2020ರ ಪತ್ರದಲ್ಲಿ ಮೋಟಾರು ವಾಹನ ನಿರೀಕ್ಷಕರ ನೇಮಕಾತಿಗೆ ಸಂಬಂಧಿಸಿದಂತೆ ಸಾರಿಗೆ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗಧಿಪಡಿಸಿರುವ ಸೇವಾನುಭವ ಪ್ರಮಾಣ ಪತ್ರದ ಕುರಿತಂತೆ ನೇರನೇಮಕಾತಿಗಾಗಿ ಅರ್ಜಿ ಸಲ್ಲಿಸುವ ಸಮಯದಲ್ಲಿ ಎಲ್ಲಾ ಅಭ್ಯರ್ಥಿಗಳು ಸಲ್ಲಿಸಿರುವ ಸೇವಾನುಭವ ಪ್ರಮಾಣ ಪತ್ರಗಳನ್ನು ಅರ್ಹವೆಂದು ಪರಿಗಣಿಸಿ ಹಾಗೂ ನಿಯಮಾನುಸಾರ ನಿಗಧಿಪಡಿಸಿರುವ ಇತರೆ ಅರ್ಹತೆಗಳಿಗನುಸಾರವಾಗಿ ನೇರನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸುವಂತೆ ಕರ್ನಾಟಕ ಲೋಕಾಸೇವಾ ಆಯೋಗಕ್ಕೆ ಅಭಿಪ್ರಾಯವನ್ನು ನೀಡಲಾಗಿರುತ್ತದೆ.
(ಇ)	ಹಾಗಿದ್ದಲ್ಲಿ, ನಕಲಿ ಅಂಕಪಟ್ಟಿಗಳನ್ನು ಹೊಂದಿರುವ ಅಭ್ಯರ್ಥಿಗಳು ಮತ್ತು ಅರ್ಹತಾ ಪತ್ರಗಳನ್ನು ಪರಿಗಣಿಸಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುತ್ತಿರುವ ಬಗ್ಗೆ ಸಮಗ್ರವಾಗಿ ತನಿಖೆ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?	

--2

		ಮೋಟಾರು ವಾಹನ ನಿರೀಕ್ಷಕರ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಅರ್ಜಿದಾರರು ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ:4161-62/2019ನ್ನು ಸಲ್ಲಿಸಿದ್ದು, ಈ ಪ್ರಕರಣದಲ್ಲಿ ಮಾನ್ಯ ನ್ಯಾಯಮಂಡಳಿಯು ದಿನಾಂಕ:19-03-2020 ರಂದು ನೀಡಿರುವ ಅಂತಿಮ ತೀರ್ಪಿನ ವಿರುದ್ಧ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 9739/2020 (ಎಸ್-ಕೆ.ಎ.ಟಿ.) ಯನ್ನು ದಾಖಲಿಸಲಾಗಿರುತ್ತದೆ. ಮುಂದುವರೆದು, ಈ ಪ್ರಕರಣದಲ್ಲಿ ಹಲವು ಅರ್ಜಿದಾರರುಗಳು ಸಹ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರತ್ಯೇಕ ರಿಟ್ ಅರ್ಜಿಗಳನ್ನು ಸಲ್ಲಿಸಿಕೊಂಡಿದ್ದು, ಪ್ರಕರಣಗಳು ಪ್ರಸ್ತುತ ಮಾನ್ಯ ನ್ಯಾಯಾಲಯದ ವಿಚಾರಣೆಗೆ ಬಾಕಿ ಇರುತ್ತವೆ.

ಟಿಡಿ 12 ಟಿಡಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ಸರ್ಕಾರ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಆಯುಕ್ತರವರ ಕಛೇರಿ, ಗ್ರಾ.ಕುನೀ.&.ನೈ.ಇ., 2ನೇ ಮಹಡಿ, "ಇ" ಬ್ಲಾಕ್, ಕೆಹೆಚ್‌ಬಿ ಕಟ್ಟಡ,
ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು–560009. ☎:080–22240508 📠:22240509
ಇ–ಮೇಲ್: krwssd@gmail.com

ಸಂ:ಗ್ರಾಕುನೀ&ನೈಇ/139/ಗ್ರಾನೀಸ(4)2020 ದಿನಾಂಕ:02.02.2021.

113
LAS
3/2/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು–01.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ **ಶ್ರೀ ನಿಸರ್ಗ ನಾರಾಯಣಸ್ವಾಮಿ ಎಲ್.ಎನ್ (ದೇವನಹಳ್ಳಿ) ಇವರ ಚುಕ್ಕೆ ರಹಿತ ಪ್ರಶ್ನೆ ಸಂ:682ಕ್ಕೆ** ಸಂಬಂಧಿಸಿದ ಮೇಲಿನ ಕ್ರಮ/ವಾಸ್ತವಿಕ ವರದಿಯ ಉತ್ತರ ನೀಡುವ ಬಗ್ಗೆ.

******

ಮಾನ್ಯ ವಿಧಾನ ಸಭಾ ಸದಸ್ಯರಾದ **ಶ್ರೀ ನಿಸರ್ಗ ನಾರಾಯಣಸ್ವಾಮಿ ಎಲ್.ಎನ್ (ದೇವನಹಳ್ಳಿ) ಇವರ ಚುಕ್ಕೆ ರಹಿತ ಪ್ರಶ್ನೆ ಸಂ:682ಕ್ಕೆ** ಉತ್ತರದ **<u>25</u>** ಪ್ರತಿಗಳನ್ನು ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ತಮ್ಮ ವಿಶ್ವಾಸಿ,
02/2/2021
ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

<u>ಪ್ರತಿಯನ್ನು:</u>
1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರಿಗೆ

ಕರ್ನಾಟಕ ವಿಧಾನಸಭೆ

ಸದಸ್ಯರ ಹೆಸರು : ಶ್ರೀ ನಿಸರ್ಗ ನಾರಾಯಣ ಸ್ವಾಮಿ.ಎಲ್.ಎನ್ (ದೇವನಹಳ್ಳಿ)
ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 682
ಉತ್ತರ ದಿನಾಂಕ : 03.02.2021

ಕ್ರ.ಸಂ	ಪ್ರಶ್ನೆ	ಉತ್ತರ
ಅ	ದೇವನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಅಳವಡಿಸಲಾದ ಶುದ್ಧ ಕುಡಿಯುವ ನೀರಿನ ಘಟಕಗಳು ಎಷ್ಟು; ಈ ಪೈಕಿ ಎಷ್ಟು ಶುದ್ಧ ನೀರಿನ ಘಟಕಗಳು ಕಾರ್ಯನಿರ್ವಹಿಸುತ್ತಿವೆ ಮತ್ತು ಎಷ್ಟು ಸ್ಥಗಿತಗೊಂಡಿವೆ; (ಮಾಹಿತಿ ನೀಡುವುದು)	ದೇವನಹಳ್ಳಿ ತಾಲ್ಲೂಕಿನಲ್ಲಿ ಇದುವರೆವಿಗೂ "ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆಗಳ ವಿವರ ಕೆಳಕಂಡಂತಿವೆ. (see table below)
ಆ	ಹಾಗಿದ್ದಲ್ಲಿ, ಸ್ಥಗಿತಗೊಂಡ ನೀರಿನ ಘಟಕಗಳನ್ನು ದುರಸ್ಥಿಗೊಳಿಸಿ ಪುನರಾರಂಭಿಸಲು ಕೈಗೊಂಡ ಕ್ರಮಗಳೇನು; (ಮಾಹಿತಿ ನೀಡುವುದು)	ದೇವನಹಳ್ಳಿ ತಾಲ್ಲೂಕು ವ್ಯಾಪ್ತಿಯಲ್ಲಿ ಪ್ರಸ್ತುತ ಯಾವುದೇ ಸ್ಥಗಿತಗೊಂಡ ಶುದ್ಧ ಕುಡಿಯುವ ನೀರಿನ ಘಟಕಗಳು ಇರುವುದಿಲ್ಲ. ಶುದ್ಧ ಕುಡಿಯುವ ನೀರಿನ ಘಟಕಗಳು ಸ್ಥಗಿತಗೊಂಡಲ್ಲಿ ಕೂಡಲೇ ಸಂಬಂಧಿಸಿದ ಗುತ್ತಿಗೆದಾರರಿಂದ ದುರಸ್ಥಿಗೊಳಿಸಿ ಕಾರ್ಯಗತಗೊಳಿಸಲಾಗುತ್ತಿದೆ.
ಇ)	ಹಾಗಿದ್ದಲ್ಲಿ, ಶುದ್ಧ ನೀರಿನ ಘಟಕಗಳ ಕೊರತೆ ಇರುವ ಗ್ರಾಮಗಳನ್ನು ಗುರುತಿಸಲಾಗಿದೆಯೇ; ಗುರುತಿಸಿದ್ದಲ್ಲಿ ಶುದ್ಧ ನೀರನ್ನು ಪೂರೈಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ? (ಮಾಹಿತಿ ನೀಡುವುದು)	ದೇವನಹಳ್ಳಿ ತಾಲ್ಲೂಕಿನ ಗ್ರಾಮಗಳ ವ್ಯಾಪ್ತಿಯಲ್ಲಿ ಯಾವುದೇ ಕಲುಷಿತ ಜಲಮೂಲಗಳು ಕಂಡುಬಂದಿರುವುದಿಲ್ಲ, ಗ್ರಾಮಗಳಲ್ಲಿ ಕಲುಷಿತ ಜಲಮೂಲಗಳು ಕಂಡು ಬಂದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗುವುದು.

District	No. of Plants Approved	Commis sioned	No. of Plants Working	Not Working
Devana halli	116	116	116	0

ಸಂ:ಗ್ರಾಕುನೀ&ನೈಇ 139 ಗ್ರಾನೀಸ(4)2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂ: ಟಿಡಿ 15 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:01 .02.2021.

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

4/5 85

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

03/02/2021
S/O

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಮಹೇಶ್ ಎನ್. ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 561 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾಧ ಶ್ರೀ ಮಹೇಶ್ ಎನ್., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 561 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Mala 01/02/2021
(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 561

ಸದಸ್ಯರ ಹೆಸರು : ಶ್ರೀ ಮಹೇಶ್ ಎನ್. (ಕೊಳ್ಳೇಗಾಲ)

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 03-02-2021

ಕ್ರ ಸಂ.	ಪ್ರಶ್ನೆ	ಉತ್ತರ
ಅ	ಕೊಳ್ಳೇಗಾಲ ನಗರದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಬಸ್ ನಿಲ್ದಾಣದ ಕಾಮಗಾರಿ ಕೆಲವು ವರ್ಷಗಳ ಹಿಂದೆಯೇ ಪ್ರಾರಂಭವಾಗಿ ಇನ್ನೂ ಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು, ಗಮನಕ್ಕೆ ಬಂದಿದೆ.
ಆ	ವರ್ಷಗಟ್ಟಲೆ ಕಾಮಗಾರಿ ನಡೆಯುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಈ ಬಸ್ ನಿಲ್ದಾಣ ಸುಸಜ್ಜಿತವಾಗಿ ರೂಪುಗೊಳ್ಳಲು ಇನ್ನೂ ಹೆಚ್ಚಿನ ಅನುದಾನ ಅಗತ್ಯವಿರುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ; ಹಾಗಾದರೆ ಯಾವ ಕ್ರಮ ಕೈಗೊಳ್ಳಲಾಗಿದೆ.	ಕ.ರಾ.ರ.ಸಾ.ನಿಗಮವು ಕೊಳ್ಳೇಗಾಲ ಪಟ್ಟಣದಲ್ಲಿ ನಗರ ಸಭೆ ಕೊಳ್ಳೇಗಾಲ ಮತ್ತು ಡಲ್ಟ್ ಸಹಯೋಗದೊಂದಿಗೆ ಮೊದಲನೇ ಹಂತದಲ್ಲಿ ರೂ.1133.00 ಲಕ್ಷಗಳಿಗೆ ಟೆಂಡರ್ ಮುಖಾಂತರ ಬಸ್ ನಿಲ್ದಾಣ ಕಾಮಗಾರಿಯನ್ನು ದಿನಾಂಕ: 20-02-2018ರಂದು ಪ್ರಾರಂಭಿಸಲಾಗಿದ್ದು, ಕಾಮಗಾರಿ ಪೂರ್ಣಗೊಳ್ಳುವ ಹಂತದಲ್ಲಿರುತ್ತದೆ. 2ನೇ ಹಂತದಲ್ಲಿ ರೂ.1084.00 ಲಕ್ಷಗಳಿಗೆ ಟೆಂಡರ್ ಮುಖಾಂತರ ಕಾಮಗಾರಿಯನ್ನು ಪ್ರಾರಂಭಿಸಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿರುತ್ತದೆ.
ಇ	ಸದರಿ ಬಸ್ ನಿಲ್ದಾಣದ ಕಾಮಗಾರಿಯ ಒಟ್ಟು ಅಂದಾಜು ಮೊತ್ತ ರೂ.20 ಕೋಟಿ, ಇಲ್ಲಿಯವರೆಗೆ 11 ಕೋಟಿ ರೂಪಾಯಿಗಳು ಖರ್ಚಾಗಿದ್ದು ಉಳಿಕೆ 9 ಕೋಟಿ ರೂಪಾಯಿಗಳು ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು, ಗಮನಕ್ಕೆ ಬಂದಿದೆ.
ಈ	ನಾಡಿನ ಪ್ರಸಿದ್ಧ ಯಾತ್ರಾ ಸ್ಥಳಗಳಾದ ಮಲೆಮಹದೇಶ್ವರ ಬೆಟ್ಟ, ಶ್ರೀಬಿಳಿಗಿರಿ ರಂಗನ ಬೆಟ್ಟಗಳಿಗೆ ಸಂಪರ್ಕ ಕಲ್ಪಿಸುವ ಪ್ರಮುಖ ಬಸ್ ನಿಲ್ದಾಣ ಈ ವರ್ಷವೇ ಜನರ ಸೇವೆಗೆ ಸಿಗುವಂತಾಗಲು ಉಳಿಕೆ 9 ಕೋಟಿ ರೂ.ಗಳನ್ನು ಈ ಸಾಲಿನಲ್ಲಿಯೇ ಬಿಡುಗಡೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?	ಉಳಿಕೆ ಮೊತ್ತವನ್ನು ಬಿಡುಗಡೆ ಮಾಡಲು ನಗರಸಭೆ, ಕೊಳ್ಳೇಗಾಲ ಹಾಗೂ ನಗರ ಭೂ ಸಾರಿಗೆ ನಿರ್ದೇಶನಾಲಯ ರವರಿಗೆ ಪತ್ರ ಬರೆಯಲಾಗಿದ್ದು, ಪ್ರಗತಿಯಲ್ಲಿರುತ್ತದೆ.

ಸಂಖ್ಯೆ: ಟಿಡಿ 15 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ಸರ್ಕಾರ

ಸಂ: ಟಿಡಿ 28 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:02.02.2021.

U/S III 3/2/21

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

ಇವರಿಗೆ:

ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ನಿಸರ್ಗ ನಾರಾಯಣಸ್ವಾಮಿ ಎಲ್.ಎನ್.,ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:680 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ನಿಸರ್ಗ ನಾರಾಯಣಸ್ವಾಮಿ. ಎಲ್.ಎನ್. ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:680 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Mala S 02/02/2021

(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 680

ಸದಸ್ಯರ ಹೆಸರು : ಶ್ರೀ ನಿಸರ್ಗ ನಾರಾಯಣ ಸ್ವಾಮಿ ಎಲ್.ಎನ್. (ದೇವನಹಳ್ಳಿ)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 03-02-2021

ಕ್ರ ಸಂ	ಪ್ರಶ್ನೆ	ಉತ್ತರಗಳು
ಅ)	ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ದೇವನಹಳ್ಳಿ ಹಾಗೂ ವಿಜಯಪುರ ಪಟ್ಟಣಗಳಲ್ಲಿ ಹೈಟೆಕ್ ಬಸ್ ನಿಲ್ದಾಣ ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; (ಮಾಹಿತಿ ನೀಡುವುದು)	ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ದೇವನಹಳ್ಳಿ ಹಾಗೂ ವಿಜಯಪುರ ಪಟ್ಟಣಗಳಲ್ಲಿ ಹೈಟೆಕ್ ಬಸ್ ನಿಲ್ದಾಣ ನಿರ್ಮಾಣದ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಮುಂದೆ ಇರುವುದಿಲ್ಲ.
ಆ)	ಹಾಗಾದರೆ ಹೈಟೆಕ್ ಬಸ್ ನಿಲ್ದಾಣ ನಿರ್ಮಾಣಕ್ಕೆ ಎಷ್ಟು ಅನುದಾನ ಬಿಡುಗಡೆ ಮಾಡಲು ಉದ್ದೇಶಿಸಿದೆ; ಯಾವ ಕಾಲಮಿತಿ ನಿಗದಿ ಪಡಿಸಲಾಗಿದೆ; (ಪೂರ್ಣ ಮಾಹಿತಿಯನ್ನು ನೀಡುವುದು)	
ಇ)	ಹಾಗಾದರೆ ಹೈಟೆಕ್ ಬಸ್ ನಿಲ್ದಾಣದ ನಿರ್ಮಾಣದ ಬಗ್ಗೆ ಸರ್ಕಾರವು ತೆಗೆದುಕೊಳ್ಳಬಹುದಾದ ಕ್ರಮಗಳೇನು? (ಪೂರ್ಣ ಮಾಹಿತಿ ನೀಡುವುದು)	ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ದೇವನಹಳ್ಳಿ ಹಾಗೂ ವಿಜಯಪುರ ಪಟ್ಟಣಗಳಲ್ಲಿ ಕ.ರಾ.ರ.ಸಾ.ನಿಗಮವು ನಿವೇಶನವನ್ನು ಹೊಂದಿರುವುದಿಲ್ಲ. ನಿವೇಶನ ಮಂಜೂರು ಮಾಡುವಂತೆ ಜಿಲ್ಲಾಡಳಿತವನ್ನು ಕೋರಲಾಗಿದ್ದು, ನಿವೇಶನ ದೊರೆತ ನಂತರ ನಿಗಮದ ಆರ್ಥಿಕ ಲಭ್ಯತೆ ಹಾಗೂ ಸಾರಿಗೆ ಅವಶ್ಯಕತೆಯನ್ನು ಆಧರಿಸಿ ಈ ಬಗ್ಗೆ ಪರಿಶೀಲಿಸಲಾಗುವುದು.

ಸಂಖ್ಯೆ: ಟಿಡಿ 28 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ಸರ್ಕಾರ

ಸಂ:ಟಿಡಿ 08 ಟಿಡಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:01-02-2021.

51
u/s
3/2/21

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೆ,

ವಿಷಯ: ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:740 ಕ್ಕೆ ಉತ್ತರ ನೀಡುವ ಬಗ್ಗೆ.
ಉಲ್ಲೇಖ: ಪ್ರಶಾವಿಸ/15ನೇವಿಸ/9ಅ/ಪ್ರಸಂ.740/2021, ದಿನಾಂಕ:25-01-2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಈಶ್ವರ್ ಖಂಡ್ರೆ (ಭಾಲ್ಕಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:740ಕ್ಕೆ ಸಂಬಂಧಿಸಿದ ಉತ್ತರದ ಕನ್ನಡ ಭಾಷೆಯ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ಮುಂದುವರೆದು, ಸದರಿ ಉತ್ತರವನ್ನು dsqb-kla-kar@nic.in ಇ-ಮೇಲ್ ಮುಖಾಂತರ ಕಳುಹಿಸಲಾಗಿದೆ.

ತಮ್ಮ ನಂಬುಗೆಯ,
01/02/21
(ರಂಗಪ್ಪ ಕರಿಗಾರ)
ಶಾಖಾಧಿಕಾರಿ, ಸಾರಿಗೆ-2,
ಸಾರಿಗೆ ಇಲಾಖೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 740

ಸದಸ್ಯರ ಹೆಸರು : ಶ್ರೀ ಈಶ್ವರ್ ಖಂಡ್ರೆ (ಭಾಲ್ಕಿ)

ಉತ್ತರಿಸಬೇಕಾದ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 03–02–2021

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಸಾರಿಗೆ ಇಲಾಖೆಯ ಎಷ್ಟು ಕಛೇರಿಗಳು ಸ್ವಂತ ಕಟ್ಟಡವನ್ನು ಹೊಂದಿವೆ ಮತ್ತು ಎಷ್ಟು ಕಛೇರಿಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ (ಸಂಪೂರ್ಣ ವಿವರ ಒದಗಿಸುವುದು);	ರಾಜ್ಯದಲ್ಲಿ ಸಾರಿಗೆ ಇಲಾಖೆಯ ಒಟ್ಟು 41 ಕಛೇರಿಗಳು ಸ್ವಂತ ಕಟ್ಟಡಗಳಲ್ಲಿ ಹಾಗೂ 32 ಕಛೇರಿಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ. ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.
ಆ)	ಬೀದರ್ ಜಿಲ್ಲೆಯ ಭಾಲ್ಕಿ ಪಟ್ಟಣದಲ್ಲಿ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಕಛೇರಿ ಕಟ್ಟಡ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ.
ಇ)	ಭಾಲ್ಕಿ ಪಟ್ಟಣಕ್ಕೆ ಸ್ವಂತ ಕಟ್ಟಡ ಮತ್ತು ಡ್ರೈವಿಂಗ್ ಟ್ರ್ಯಾಕ್ ನಿರ್ಮಾಣದ ಬಗ್ಗೆ ಸರ್ಕಾರದ ಪ್ರಸ್ತಾವನೆ ಸಲ್ಲಿಸಿದ್ದು, ಇದು ಯಾವ ಹಂತದಲ್ಲಿದೆ; ಇದನ್ನು ಅನುಷ್ಠಾನಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?	ಪ್ರಸ್ತುತ, ಭಾಲ್ಕಿ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಗೆ ಸ್ವಂತ ಕಟ್ಟಡ ಹಾಗೂ ಡ್ರೈವಿಂಗ್ ಟ್ರ್ಯಾಕ್ ನಿರ್ಮಾಣ ಕುರಿತಂತೆ ಸರ್ಕಾರದ ಹಂತದಲ್ಲಿ ಪ್ರಸ್ತುತ ಯಾವುದೇ ಪ್ರಸ್ತಾವನೆ ಇರುವುದಿಲ್ಲ. ಸದರಿ ಕಛೇರಿ ಸ್ವಂತ ಕಟ್ಟಡ ಹಾಗೂ ಡ್ರೈವಿಂಗ್ ಟ್ರ್ಯಾಕ್ ನಿರ್ಮಾಣ ಮಾಡುವ ಕುರಿತು ಅಗತ್ಯವಿರುವ ಜಮೀನನ್ನು ಗುರುತಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.

ಟಿಡಿ 08 ಟಿಡಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು.

ಅನುಬಂಧ

ಸಾರಿಗೆ ಇಲಾಖೆಯ ಕಛೇರಿಗಳು ಕಾರ್ಯನಿರ್ವಹಿಸುತ್ತಿರುವ ಕಟ್ಟಡಗಳ ವಿವರ

ದಿನಾಂಕ:31.12.2020 ರ ಅಂತ್ಯಕ್ಕೆ

ಕ್ರ ಸಂ	ಕಛೇರಿಯ ಹೆಸರು	ಸ್ವಂತ ಕಟ್ಟಡ	ಸರ್ಕಾರಿ ಕಟ್ಟಡ	ಖಾಸಗಿ ಕಟ್ಟಡ
1	ಸಾರಿಗೆ ಆಯುಕ್ತರ ಕಛೇರಿ, ಬೆಂಗಳೂರು		ಬಿ.ಎಂ.ಟಿ.ಸಿ. ಕಟ್ಟಡ	
	ಜಂಟಿ ಸಾರಿಗೆ ಆಯುಕ್ತರ, ಬೆಂಗಳೂರು ನಗರ		ಎಂ.ಎಸ್.ಐ.ಎಲ್	
2	ನಿರ್ದೇಶಕರು, ರಸ್ತೆ ಸುರಕ್ಷತೆ ಬೆಂಗಳೂರು		ಸರ್ಕಾರಿ ಕಟ್ಟಡ	
3	ಜಂಟಿ ಸಾರಿಗೆ ಆಯುಕ್ತರು, ಬೆಂಗಳೂರು ಗ್ರಾಮಾಂತರ		ಬಿ.ಡಿ.ಎ.	
4	ಉ.ಸಾ.ಆ & ಹಿ.ಪ್ರಾ.ಸಾ.ಕ.,ಬೆಂಗಳೂರು (ಕೇಂದ್ರ)		ಬಿ.ಬಿ.ಎಂ.ಪಿ	
5	ಪ್ರಾ.ಸಾ.ಕ., ಬೆಂಗಳೂರು (ಪಶ್ಚಿಮ)	ಸ್ವಂತ ಕಟ್ಟಡ		
6	ಪ್ರಾ.ಸಾ.ಕ.,ಬೆಂಗಳೂರು (ಪೂರ್ವ)		ಬಿ.ಎಂ.ಟಿ.ಸಿ.	
7	ಉ.ಸಾ.ಆ & ಹಿ.ಪ್ರಾ.ಸಾ.ಕ.,ಬೆಂಗಳೂರು (ದಕ್ಷಿಣ)		ಬಿ.ಬಿ.ಎಂ.ಪಿ	
8	ಪ್ರಾ.ಸಾ.ಕ., ಬೆಂಗಳೂರು (ಉತ್ತರ)	ಸ್ವಂತ ಕಟ್ಟಡ		
9	ಪ್ರಾ.ಸಾ.ಕ., ತುಮಕೂರು	ಸ್ವಂತ ಕಟ್ಟಡ		
10	ಪ್ರಾ.ಸಾ.ಕ., ಕೋಲಾರ	ಸ್ವಂತ ಕಟ್ಟಡ		
11	ಪ್ರಾ.ಸಾ.ಕ., ಎಲೆಕ್ಟ್ರಾನಿಕ್ ಸಿಟಿ	ಸ್ವಂತ ಕಟ್ಟಡ		
12	ಪ್ರಾ.ಸಾ.ಕ., ಜ್ಞಾನಭಾರತಿ	ಸ್ವಂತ ಕಟ್ಟಡ		
13	ಪ್ರಾ.ಸಾ.ಕ., ಕೆ.ಆರ್.ಪುರಂ	ಸ್ವಂತ ಕಟ್ಟಡ		
14	ಪ್ರಾ.ಸಾ.ಕ., ನೆಲಮಂಗಲ	ಸ್ವಂತ ಕಟ್ಟಡ		
15	ಪ್ರಾ.ಸಾ.ಕ., ಯಲಹಂಕ			ಖಾಸಗಿ ಕಟ್ಟಡ
16	ಸ.ಪ್ರಾ.ಸಾ.ಕ., ಕೆ.ಜಿ.ಎಫ್.	ಸ್ವಂತ ಕಟ್ಟಡ		
17	ಪ್ರಾ.ಸಾ.ಕ., ಚಿಕ್ಕಬಳ್ಳಾಪುರ	ಸ್ವಂತ ಕಟ್ಟಡ		
18	ಸ.ಪ್ರಾ.ಸಾ.ಕ., ದೇವನಹಳ್ಳಿ	ಸ್ವಂತ ಕಟ್ಟಡ		
19	ಪ್ರಾ.ಸಾ.ಕ., ರಾಮನಗರ	ಸ್ವಂತ ಕಟ್ಟಡ		
20	ಸ.ಪ್ರಾ.ಸಾ.ಕ., ತಿಪಟೂರು		ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ	
21	ಸ.ಪ್ರಾ.ಸಾ.ಕ., ಮಧುಗಿರಿ			
22	ಜಂಟಿ ಸಾರಿಗೆ ಆಯುಕ್ತರ ಕಛೇರಿ, ಬೆಳಗಾಂ		99 ವರ್ಷಗಳವರೆಗೆ ಆರ್ಮೀ ಬೋರ್ಡ್‌ರಿಂದ ಲೀಸ್‌ಗೆ ಪಡೆದಿದೆ	
	ಪ್ರಾ.ಸಾ.ಕ.,ಬೆಳಗಾಂ			
23	ಪ್ರಾ.ಸಾ.ಕ., ಚಿಕ್ಕೋಡಿ	ಸ್ವಂತ ಕಟ್ಟಡ		ಖಾಸಗಿ ಕಟ್ಟಡ
24	ಪ್ರಾ.ಸಾ.ಕ., ಶಿರಸಿ	ಸ್ವಂತ ಕಟ್ಟಡ		
25	ಪ್ರಾ.ಸಾ.ಕ., ಹಾವೇರಿ	ಸ್ವಂತ ಕಟ್ಟಡ		
26	ಪ್ರಾ.ಸಾ.ಕ., ಕಾರವಾರ	ಸ್ವಂತ ಕಟ್ಟಡ		
27	ಪ್ರಾ.ಸಾ.ಕ., ಗದಗ	ಸ್ವಂತ ಕಟ್ಟಡ		
28	ಪ್ರಾ.ಸಾ.ಕ., ಧಾರವಾಡ (ಪಶ್ಚಿಮ)			
	ಪರ ಸಾರಿಗೆ ಆಯುಕ್ತರು, (ಪ್ರ)(ಉ) ಧಾರವಾಡ	ಸ್ವಂತ ಕಟ್ಟಡ		
29	ಪ್ರಾ.ಸಾ.ಕ., ಬಿಜಾಪುರ	ಸ್ವಂತ ಕಟ್ಟಡ		
30	ಪ್ರಾ.ಸಾ.ಕ., ಬಾಗಲಕೋಟೆ			ಖಾಸಗಿ ಕಟ್ಟಡ
31	ಪ್ರಾ.ಸಾ.ಕ., ಧಾರವಾಡ (ಪೂರ್ವ)	ಸ್ವಂತ ಕಟ್ಟಡ		
32	ಸ.ಪ್ರಾ.ಸಾ.ಕ., ಬೈಲಹೊಂಗಲ			

ಕ್ರ ಸಂ	ಕಛೇರಿಯ ಹೆಸರು	ಸ್ವಂತ ಕಟ್ಟಡ	ಸರ್ಕಾರಿ ಕಟ್ಟಡ	ಖಾಸಗಿ ಕಟ್ಟಡ
33	ಸ.ಪ್ರಾ.ಸಾ.ಕ., ಹೊನ್ನಾವರ			ಖಾಸಗಿ ಕಟ್ಟಡ
34	ಸ.ಪ್ರಾ.ಸಾ.ಕ., ಗೋಕಾಕ್			ಖಾಸಗಿ ಕಟ್ಟಡ
35	ಸ.ಪ್ರಾ.ಸಾ.ಕ., ಜಮಖಂಡಿ	ಸ್ವಂತ ಕಟ್ಟಡ		
36	ಸ.ಪ್ರಾ.ಸಾ.ಕ. ದಾಂಡೇಲಿ			ಖಾಸಗಿ ಕಟ್ಟಡ
37	ಸ.ಪ್ರಾ.ಸಾ.ಕ., ರಾಣೆಬೆನ್ನೂರು			ಖಾಸಗಿ ಕಟ್ಟಡ
38	ಸ.ಪ್ರಾ.ಸಾ.ಕ. ರಾಮದುರ್ಗ		ಲೋಕೋಪಯೋಗಿ ಕಟ್ಟಡ	
39	**ಜಂಟಿ ಸಾರಿಗೆ ಆಯುಕ್ತರ ಕಛೇರಿ, ಮೈಸೂರು**			
	ಪ್ರಾ.ಸಾ.ಕ.,ಮೈಸೂರು (ಪಶ್ಚಿಮ)	ಸ್ವಂತ ಕಟ್ಟಡ		
40	ಪ್ರಾ.ಸಾ.ಕ., ಚಾಮರಾಜನಗರ	ಸ್ವಂತ ಕಟ್ಟಡ		
41	ಪ್ರಾ.ಸಾ.ಕ., ಮಂಡ್ಯ	ಸ್ವಂತ ಕಟ್ಟಡ		
42	ಪ್ರಾ.ಸಾ.ಕ., ಹಾಸನ	ಸ್ವಂತ ಕಟ್ಟಡ		
43	ಪ್ರಾ.ಸಾ.ಕ., ಮಡಿಕೇರಿ	ಸ್ವಂತ ಕಟ್ಟಡ		
44	ಸ.ಪ್ರಾ.ಸಾ.ಕ., ಸಕಲೇಶಪುರ			ಖಾಸಗಿ ಕಟ್ಟಡ
45	ಸ.ಪ್ರಾ.ಸಾ.ಕ., ಹುಣಸೂರು		ನೀರಾವರಿ ಇಲಾಖೆ	
46	ಸ.ಪ್ರಾ.ಸಾ.ಕ., ನಾಗಮಂಗಲ	ಸ್ವಂತ ಕಟ್ಟಡ		
47	ಪ್ರಾ.ಸಾ.ಕ., ಮೈಸೂರು (ಪೂರ್ವ)	ಸ್ವಂತ ಕಟ್ಟಡ		
48	**ಜಂಟಿ ಸಾರಿಗೆ ಆಯುಕ್ತರ ಕಛೇರಿ, ಕಲಬುರಗಿ**			
	ಉ.ಸಾ.ಆ & ಹಿ.ಪ್ರಾ.ಸಾ.ಕ., ಕಲಬುರಗಿ	ಸ್ವಂತ ಕಟ್ಟಡ		
49	ಪ್ರಾ.ಸಾ.ಕ., ಬೀದರ್			ಖಾಸಗಿ ಕಟ್ಟಡ
50	ಪ್ರಾ.ಸಾ.ಕ., ಬಳ್ಳಾರಿ	ಸ್ವಂತ ಕಟ್ಟಡ		
51	ಪ್ರಾ.ಸಾ.ಕ., ಹೊಸಪೇಟೆ	ಸ್ವಂತ ಕಟ್ಟಡ		
52	ಪ್ರಾ.ಸಾ.ಕ., ರಾಯಚೂರು	ಸ್ವಂತ ಕಟ್ಟಡ		
53	ಪ್ರಾ.ಸಾ.ಕ., ಕೊಪ್ಪಳ			ಖಾಸಗಿ ಕಟ್ಟಡ
54	ಸ.ಪ್ರಾ.ಸಾ.ಕ., ಭಾಲ್ಕಿ			ಖಾಸಗಿ ಕಟ್ಟಡ
55	ಪ್ರಾ.ಸಾ.ಕ., ಯಾದಗೀರ್		ಸರ್ಕಾರಿ ಕಟ್ಟಡ	
56	ಸ.ಪ್ರಾ.ಸಾ.ಕ., ಬಸವಕಲ್ಯಾಣ		ಲೋಕೋಪ ಯೋಗಿ ಕಟ್ಟಡ	
57	**ಜಂಟಿ ಸಾರಿಗೆ ಆಯುಕ್ತರ ಕಛೇರಿ, ಶಿವಮೊಗ್ಗ**			
	ಪ್ರಾ.ಸಾ.ಕ.,., ಶಿವಮೊಗ್ಗ	ಸ್ವಂತ ಕಟ್ಟಡ		
58	ಪ್ರಾ.ಸಾ.ಕ., ಚಿಕ್ಕಮಗಳೂರು	ಸ್ವಂತ ಕಟ್ಟಡ		
59	ಪ್ರಾ.ಸಾ.ಕ., ದಾವಣಗೆರೆ	ಸ್ವಂತ ಕಟ್ಟಡ		
60	ಪ್ರಾ.ಸಾ.ಕ., ಚಿತ್ರದುರ್ಗ	ಸ್ವಂತ ಕಟ್ಟಡ		
61	ಪ್ರಾ.ಸಾ.ಕ.,ಮಂಗಳೂರು	ಸ್ವಂತ ಕಟ್ಟಡ		
62	ಪ್ರಾ.ಸಾ.ಕ ಉಡುಪಿ	ಸ್ವಂತ ಕಟ್ಟಡ		
63	ಪ್ರಾ.ಸಾ.ಕ., ಪುತ್ತೂರು	ಸ್ವಂತ ಕಟ್ಟಡ		
64	ಸ.ಪ್ರಾ.ಸಾ.ಕ., ಸಾಗರ	ಸ್ವಂತ ಕಟ್ಟಡ		
65	ಸ.ಪ್ರಾ.ಸಾ.ಕ ತರೀಕೆರೆ		ಟಿ.ಎ.ಪಿ.ಸಿ. ಎಂ.ಎಸ್	
66	ಸ.ಪ್ರಾ.ಸಾ.ಕ ಬಂಟ್ವಾಳ			ಖಾಸಗಿ ಕಟ್ಟಡ
67	ಪ್ರಾ.ಸಾ.ಕ., ಚಂದಾಪುರ			ಖಾಸಗಿ ಕಟ್ಟಡ
68	ಸ.ಪ್ರಾ.ಸಾ.ಕ ಚಿಂತಾಮಣಿ			ಖಾಸಗಿ ಕಟ್ಟಡ
69	ಸ.ಪ್ರಾ.ಸಾ.ಕ ರಾಣೆಬೆನ್ನೂರ			ಖಾಸಗಿ ಕಟ್ಟಡ
70	ಪ್ರಾ.ಸಾ.ಕ.,ಆಟೋರಿಕ್ಷಾ ರಹದಾರಿ ಮತ್ತು ಸಾರಿಗೆ ನಿಗಮ		ಬಿ.ಎಂ.ಟಿ.ಸಿ.	

ಕ್ರ ಸಂ	ಕಛೇರಿಯ ಹೆಸರು	ಸ್ವಂತ ಕಟ್ಟಡ	ಸರ್ಕಾರಿ ಕಟ್ಟಡ	ಖಾಸಗಿ ಕಟ್ಟಡ
71	ತನಿಖಾ ಠಾಣೆ, ಅತ್ತಿಬೆಲೆ		ಸರ್ಕಾರಿ ಕಟ್ಟಡ	
72	ತನಿಖಾ ಠಾಣೆ, ನಿಪ್ಪಾಣಿ(ಕೊಗನಳ್ಳಿ)	ಸ್ವಂತ ಕಟ್ಟಡ		
73	ತನಿಖಾ ಠಾಣೆ, ರಾಮನಗರ			ಖಾಸಗಿ ಕಟ್ಟಡ
74	ತನಿಖಾ ಠಾಣೆ, ಗೌರಿಬಿದನೂರು	ತಾತ್ಕಾಲಿಕ ಶೆಡ್‌ನಲ್ಲಿ ಕಾರ್ಯನಿರ್ವಹಿಸುತ್ತಿದೆ		
75	ತನಿಖಾ ಠಾಣೆ, ಬಾಗೇಪಲ್ಲಿ			
76	ತನಿಖಾ ಠಾಣೆ, ರಾಯಲ್‌ಪಾಡ್			
77	ತನಿಖಾ ಠಾಣೆ, ಕಾಗವಾಡ			
78	ತನಿಖಾ ಠಾಣೆ, ಧೂಳಖೇಡ			
79	ತನಿಖಾ ಠಾಣೆ, ಶಿರಡೋಣ			
80	ತನಿಖಾ ಠಾಣೆ, ಗುಂಡ್ಲುಪೇಟೆ			
81	ತನಿಖಾ ಠಾಣೆ, ಚಿಕ್ಕಹೊಳೆ			
82	ತನಿಖಾ ಠಾಣೆ, ಆಳಂದ			
83	ತನಿಖಾ ಠಾಣೆ, ಹುಮ್ನಾಬಾದ್			
84	ತನಿಖಾ ಠಾಣೆ, ಹಗರಿ			
85	ತನಿಖಾ ಠಾಣೆ, ತಲಪಾಡಿ			
86	ತನಿಖಾ ಠಾಣೆ, ನಂಗ್ಲಿ			

ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ,
ಬೆಂಗಳೂರು

AHF/ 30 /AID /2021-AHF_SEC_b_AH_ Animal Husbandry Fisheries sec

ಕರ್ನಾಟಕ ಸರ್ಕಾರ

ಸಂಖ್ಯೆ:ಇ-ಪಸಂಮೀ 30 ಸಲೆವಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ:01.02.2021

07
U/S
03/2/2021

ಇವರಿಂದ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
ಬೆಂಗಳೂರು.

ಇವರಿಗೆ:

ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ,

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ **ಆಚಾರ್ ಹಾಲಪ್ಪ ಬಸಪ್ಪ (ಯಲಬುರ್ಗ)** ಇವರು ಸದನದಲ್ಲಿ ಮಂಡಿಸಿರುವ ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ: 717 ಕ್ಕೆ ಉತ್ತರಿಸುವ ಬಗ್ಗೆ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ **ಆಚಾರ್ ಹಾಲಪ್ಪ ಬಸಪ್ಪ (ಯಲಬುರ್ಗ)** ಇವರು ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 717 ಕ್ಕೆ ಕನ್ನಡ ಭಾಷೆಯಲ್ಲಿ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ

(ಬಿ.ಎನ್. ಪ್ರವೀಣ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
(ಪಶುಸಂಗೋಪನೆ)

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಯಲಬುರ್ಗ)

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 717

ಉತ್ತರಿಸಬೇಕಾದ ದಿನಾಂಕ : 03.02.2021.

ಉತ್ತರಿಸಬೇಕಾದ ಸಚಿವರು : ಮಾನ್ಯ ಪಶುಸಂಗೋಪನೆ ಸಚಿವರು.

ಕ್ರ ಸಂ	ಪ್ರಶ್ನೆಗಳು	ಉತ್ತರಗಳು
ಅ	ರಾಜ್ಯದಲ್ಲಿ ಗೋಹತ್ಯೆ ನಿಷೇಧ ಕಾಯ್ದೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಅನುಸರಿಸುವ ಮಾನದಂಡಗಳೇನು;	ರಾಜ್ಯದಲ್ಲಿ ಗೋಹತ್ಯೆ ನಿಷೇಧ ಅಧ್ಯಾದೇಶವನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಕುರಿತು "ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣೆ ಅಧ್ಯಾದೇಶ 2020" ರಲ್ಲಿ ವಿವರಿಸಲಾಗಿದೆ. ಮುಂದುವರೆದು, ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣೆ ನಿಯಮಗಳನ್ನು ರಚಿಸಲು ಕ್ರಮವಹಿಸಲಾಗುತ್ತಿದೆ.
ಆ	ವಯಸ್ಸಾದ, ವಯೋಸಹಜ ಖಾಯಿಲೆಗಳಿಂದ ಬಳಲುವ ಪಶುಗಳ ಸಂರಕ್ಷಣೆಗೆ ರೂಪಿಸಿಕೊಂಡ ಯೋಜನೆಗಳಾವುವು;	ವಯಸ್ಸಾದ, ವಯೋಸಹಜ ಖಾಯಿಲೆಗಳಿಂದ ಬಳಲುವ ಪಶುಗಳನ್ನು ಸಂರಕ್ಷಣೆ ಮಾಡಲು ಅವುಗಳನ್ನು ಗೋಶಾಲೆಗಳಿಗೆ ಬಿಡಲು ಅವಕಾಶವಿರುತ್ತದೆ.
ಇ	ಇದಕ್ಕಾಗಿ ತಾಲ್ಲೂಕುವಾರು ಗೋ-ಶಾಲೆಗಳನ್ನು ತರೆಯುವ ಯೋಜನೆ ಸರ್ಕಾರಕ್ಕಿದೆಯೇ;	ಈ ಕುರಿತು ಚಿಂತನೆ ನಡೆಸಲಾಗುತ್ತಿದೆ.
ಈ	ಇದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು;	ಅಂತಿಮ ನಿರ್ಣಯ ಕೈಗೊಂಡ ನಂತರ ಸೂಕ್ತ ಕ್ರಮವಹಿಸಲಾಗುವುದು.
ಉ	ರಾಜ್ಯದಲ್ಲಿ ಸದ್ಯ ಸರ್ಕಾರದಿಂದ ನಿರ್ವಹಿಸಲ್ಪಡುತ್ತಿರುವ ಗೋ-ಶಾಲೆಗಳ ಜಿಲ್ಲಾವರು ವಿವರ ನೀಡುವುದು?	ಸದ್ಯ ಸರ್ಕಾರದಿಂದ ಯಾವುದೇ ಗೋ-ಶಾಲೆಗಳನ್ನು ನಿರ್ವಹಿಸುತ್ತಿಲ್ಲ. ಆದರೆ, ರಾಜ್ಯದಲ್ಲಿ 188 ಸರ್ಕಾರೇತರ ಗೋಶಾಲೆಗಳಿದ್ದು, ಅಲ್ಲಿ ವಯಸ್ಸಾದ, ವಯೋಸಹಜ ಖಾಯಿಲೆಗಳಿಂದ ಬಳಲುವ ಪಶುಗಳನ್ನು ಸಂರಕ್ಷಣೆ ಮಾಡಲಾಗುತ್ತಿದೆ.

ಪಸಂಮೀ ಇ-30 ಸಲೆವಿ 202

ಪ್ರಭು ಬಿ. ಚವ್ಹಾಣ್
ಪಶುಸಂಗೋಪನೆ ಸಚಿವರು,

ಕರ್ನಾಟಕ ಸರ್ಕಾರ

ಸಂಖ್ಯೆ:ಮಮಇ 25 ಪಿಹೆಚ್‌ಪಿ 2021

ಕರ್ನಾಟಕ ಸರ್ಕಾರ ಸಚಿವಾಲಯ
3ನೇ ಗೇಟ್, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:02.02.2021

168
U/S
3/2/21

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬಹುಮಹಡಿಗಳ ಕಟ್ಟಡ, ಬೆಂಗಳೂರು-1.

ಇವರಿಗೆ;
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ,
ಬೆಂಗಳೂರು-560 001.

ಮಾನ್ಯರೆ,

ವಿಷಯ: ಶ್ರೀ ಉಮಾನಾಥ ಎ. ಕೋಟ್ಯಾನ್, ಮಾನ್ಯ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:747ಕ್ಕೆ ಉತ್ತರ ಸಲ್ಲಿಸುವ ಬಗ್ಗೆ.

ಉಲ್ಲೇಖ: ಕರ್ನಾಟಕ ವಿಧಾನ ಸಭೆ ಸಚಿವಾಲಯದ ಪತ್ರ ಸಂಖ್ಯೆ:ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.747/2021, ದಿ:23.01.2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ಉಮಾನಾಥ ಎ. ಕೋಟ್ಯಾನ್, ಮಾನ್ಯ ವಿಧಾನ ಸಭಾ ಸದಸ್ಯರು ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:747ಕ್ಕೆ ಸಂಬಂಧಿಸಿದಂತೆ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿ ಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

G. H. Sarojamma
(ಜಿ. ಹೆಚ್. ಸರೋಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ – 2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 747
ಸದಸ್ಯರ ಹೆಸರು : ಶ್ರೀ ಉಮಾನಾಥ್ ಎ. ಕೋಟ್ಯಾನ್
ಉತ್ತರಿಸುವ ದಿನಾಂಕ : 03.02.2021
ಉತ್ತರಿಸುವ ಸಚಿವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು.

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿರುವ ಹಿರಿಯ ನಾಗರೀಕರ ಸಂಖ್ಯಾ ಪ್ರಮಾಣ ಹಾಗೂ ಅವರ ಸುರಕ್ಷಿತತೆ ಮತ್ತು ಸಂರಕ್ಷಣೆಗಾಗಿ ಸರ್ಕಾರದ ಯೋಜನಾನುಷ್ಠಾನಗಳು ಯಾವುವು; ಕಳೆದ ಎರಡು ವರ್ಷಗಳಲ್ಲಿ ಎಷ್ಟು ಜನ ಹಿರಿಯ ನಾಗರೀಕರಿಗೆ ಸರ್ಕಾರದ ಯೋಜನಾ ಸೌಲಭ್ಯಗಳನ್ನು ಒದಗಿಸಿಕೊಡಲಾಗಿದೆ;	ಇಲಾಖೆಯು ಹಿರಿಯ ನಾಗರಿಕರ ಸುರಕ್ಷತೆ ಹಾಗೂ ಸಂರಕ್ಷಣೆಗಾಗಿ ಹಲವಾರು ಯೋಜನೆಗಳನ್ನು ರೂಪಿಸಿ ಜಾರಿಗೊಳಿಸುತ್ತಿದ್ದು ಯೋಜನೆಗಳ ವಿವರವನ್ನು ಅನುಬಂಧದಲ್ಲಿ ಒದಗಿಸಿದೆ. ಕಳೆದ ಎರಡು ವರ್ಷಗಳಲ್ಲಿ 3,496 ಹಿರಿಯ ನಾಗರಿಕರು ಇಲಾಖಾ ವತಿಯಿಂದ ಹಿರಿಯ ನಾಗರಿಕರಿಗಾಗಿ ಇರುವ ಯೋಜನೆಗಳ ಪ್ರಯೋಜನವನ್ನು ಪಡೆದಿರುತ್ತಾರೆ. ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ನಿರ್ದೇಶನಾಲಯದಿಂದ ಇಲ್ಲಿಯವರೆಗೆ ಒಟ್ಟು 12,58,979 ಹಿರಿಯ ನಾಗರಿಕರು ವೃದ್ಯಾಪ್ಯ ವೇತನ ಹಾಗೂ ಸಂಧ್ಯಾ ಸುರಕ್ಷಾ ವೇತನವನ್ನು ಪಡೆದಿರುತ್ತಾರೆ.
ಆ)	ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಇಲಾಖೆಯವರು ಸಮೀಕ್ಷೆ ನಡೆಸಿ ಹಿರಿಯ ನಾಗರಿಕರುಗಳ ಸಂಖ್ಯೆ ಮತ್ತು ಯೋಜನಾ ಸೌಲಭ್ಯಗಳ ಅವಶ್ಯಕತೆ ಇರುವವರನ್ನು ಗಮನಿಸಿ ಅವರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಕೈಗೊಳ್ಳುತ್ತಿರುವ ಕ್ರಮಗಳಾವುವು;	ಜಿಲ್ಲಾ ಮಟ್ಟದಲ್ಲಿ ತಾಲ್ಲೂಕು ಮಟ್ಟದಲ್ಲಿ ಗ್ರಾಮೀಣ ಮಟ್ಟದಲ್ಲಿ, ನಗರ ಸಭೆ ಮಟ್ಟದಲ್ಲಿ ಪುನರ್ವಸತಿ ಕಾರ್ಯಕರ್ತರನ್ನು ನೇಮಿಸಿಕೊಂಡಿದ್ದು 2011 ರ ಹಿರಿಯ ನಾಗರಿಕರ ಜನಗಣತಿ ಮಾಹಿತಿ ಆಧರಿಸಿ ಹಾಗೂ ಈ ಎಲ್ಲಾ ಕಾರ್ಯಕರ್ತರ ಮುಖಾಂತರ ಯೋಜನಾ ಸೌಲಭ್ಯ ಅವಶ್ಯವಾಗಿರುವ ಅರ್ಹ ಹಿರಿಯ ನಾಗರಿಕರನ್ನು ಗುರುತಿಸಿ ಜಿಲ್ಲಾ ಮಟ್ಟದ ಸಮಿತಿಗಳ ಮುಖಾಂತರ ಆಯ್ಕೆ ಮಾಡಿ ಅವರಿಗೆ ಇಲಾಖೆಯಿಂದ ಯೋಜನಾ ಸೌಲಭ್ಯಗಳನ್ನು ಆಯವ್ಯಯ ಲಭ್ಯತೆಯ ಮೇಲೆ ಒದಗಿಸುವಲ್ಲಿ ಕ್ರಮವನ್ನು ವಹಿಸಲಾಗುತ್ತಿದೆ.
ಇ)	ಹಿರಿಯ ನಾಗರಿಕರು ಬಹುತೇಕ ಆರ್ಥಿಕ ಸ್ಥಿತಿಗತಿಗಳಲ್ಲಿ ಇರುವವರು, ಕೌಟುಂಬಿಕ ವ್ಯವಸ್ಥೆಯಲ್ಲಿ ಸಂಕಷ್ಟದಲ್ಲಿರುವವರು, ಪಿಂಚಣಿ ಪಡೆಯುವವರು, ವಸತಿ ಸಮಸ್ಯೆಯನ್ನು ಎದುರಿಸುತ್ತಿರುವವರಿಗೆ ನೆರವು ಹಾಗೂ ಮಾರ್ಗದರ್ಶನಗಳೇನು?	ಇಲಾಖೆಯ ಎಲ್ಲಾ ಯೋಜನಾ ಕಾರ್ಯಕ್ರಮಗಳು ಯೋಜನಾ ಮಾರ್ಗಸೂಚಿಯನುಸಾರ ಬಡತನ ರೇಖೆಗಿಂತ ಕೆಳಗಿನ ಸಂಕಷ್ಟದಲ್ಲಿರುವ ವಸತಿ ಸಮಸ್ಯೆ ಇರುವ ಹಿರಿಯ ನಾಗರಿಕರಿಗೆ ಸೌಲಭ್ಯ ಒದಗಿಸುವುದಾಗಿದೆ. ಬಡತನ ರೇಖೆಗಿಂತ ಕೆಳಗಿನ ನಿರ್ಗತಿಕ ಹಿರಿಯ ನಾಗರಿಕರಿಗಾಗಿ ವೃದ್ಧಾಶ್ರಮ, ಹಗಲು ಯೋಗಕ್ಷೇಮ ಕೇಂದ್ರ, ಹಿರಿಯ ನಾಗರಿಕರ ಸಹಾಯವಾಣಿ, ಪಿಂಚಣಿ ಮುಂತಾದ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ಈ ಎಲ್ಲಾ ಯೋಜನೆಗಳ ಬಗ್ಗೆ ವ್ಯಾಪಕ ಪ್ರಚಾರ ನೀಡಲಾಗುತ್ತಿದೆ.

		ಜಿಲ್ಲಾ ಮಟ್ಟದಲ್ಲಿ, ತಾಲ್ಲೂಕು ಮಟ್ಟದಲ್ಲಿ, ಗ್ರಾಮೀಣ ಮಟ್ಟದಲ್ಲಿ, ನಗರ ಸಭೆ ಮಟ್ಟದಲ್ಲಿ ಪುನರ್ವಸತಿ ಕಾರ್ಯಕರ್ತರ ಮುಖಾಂತರ ಫಲಾನುಭವಿಗಳನ್ನು ಗುರುತಿಸಿ ನೆರವು ನೀಡಲಾಗುತ್ತಿದೆ. ಸಂಕಷ್ಟದಲ್ಲಿರುವ ಸಮಸ್ಯೆಗಳನ್ನು ಎದುರಿಸುತ್ತಿರುವ ಹಿರಿಯ ನಾಗರಿಕರು ಜಿಲ್ಲೆಗಳಲ್ಲಿ ನಡೆಸಲಾಗುತ್ತಿರುವ ಹಿರಿಯ ನಾಗರಿಕರ ಸಹಾಯವಾಣಿಯ ಮುಖಾಂತರವೂ ಸಹ ಸಲಹೆ ಮಾರ್ಗದರ್ಶನ ಪಡೆಯುತ್ತಿದ್ದಾರೆ.

ಸಂಖ್ಯೆ: ಮಮಇ 25 ಪಿಹೆಚ್‌ಪಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ, ಹಿರಿಯ ನಾಗರೀಕರ ಸಬಲೀಕರಣ
ಇಲಾಖಾ ಸಚಿವರು

ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಉಮಾನಾಥ್ ಎ ಕೊಟ್ಯಾನ್ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:747ಕ್ಕೆ ಅನುಬಂಧ

ಇಲಾಖಾವತಿಯಿಂದಹಿರಿಯ ನಾಗರಿಕರಿಗಾಗಿ ಜಾರಿಗೊಳಿಸುತ್ತಿರುವ ಯೋಜನೆಗಳು

1. ಹಿರಿಯ ನಾಗರಿಕರ ವೃದ್ಧಾಶ್ರಮ:

ರಾಜ್ಯದ 30 ಜಿಲ್ಲೆಗಳಲ್ಲಿ ನಿರ್ಗತಿಕ ಹಿರಿಯ ನಾಗರಿಕರಿಗಾಗಿ ವೃದ್ಧಾಶ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದ್ದು, ಈ ವೃದ್ಧಾಶ್ರಮದಲ್ಲಿ 25 ನಿರ್ಗತಿಕ ಹಿರಿಯ ನಾಗರಿಕರನ್ನು ದಾಖಲಿಸಿಕೊಳ್ಳಲು ಅವಕಾಶವಿದ್ದು, ಒಂದು ವೃದ್ಧಾಶ್ರಮದ ನಿರ್ವಹಣೆಗಾಗಿ ವಾರ್ಷಿಕ ರೂ.8.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದ್ದು, ಇದರಲ್ಲಿ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ಯೋಜನಾ ವೆಚ್ಚದ ಶೇ.90ರಷ್ಟು ಅನುದಾನವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಲಾಗುತ್ತಿದ್ದು ಉಳಿದ ಶೇ.10ರಷ್ಟನ್ನು ಸಂಸ್ಥೆಯು ಭರಿಸಬೇಕಾಗುತ್ತದೆ. ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಮಂಜೂರು ಮಾಡಲಾಗುತ್ತಿದೆ.

ರಾಜ್ಯದ ಪ್ರತಿ ಕಂದಾಯ ಉಪ ವಿಭಾಗದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವೃದ್ಧಾಶ್ರಮಗಳನ್ನು ಪ್ರಾರಂಭಿಸಲು ಅವಕಾಶವಿದ್ದು, ಪ್ರಸ್ತುತ 8 ಕಂದಾಯ ಉಪ ವಿಭಾಗಕ್ಕೆ ವೃದ್ಧಾಶ್ರಮ ನಡೆಸಲು ಆಡಳಿತಾತ್ಮಕ ಮಂಜೂರಾತಿ ದೊರೆತಿರುತ್ತದೆ.

2. ಹಗಲು ಯೋಗಕ್ಷೇಮ ಕೇಂದ್ರಗಳು:

ರಾಜ್ಯದ 30 ಜಿಲ್ಲೆಗಳಿಗೆ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದ ಮಂಜೂರಾತಿ ದೊರೆತಿದ್ದು, ಪ್ರತಿ ಕೇಂದ್ರದಲ್ಲಿ ಸುಮಾರು 50–150 ಫಲಾನುಭವಿಗಳಿಗೆ ಅವಕಾಶ ಕಲ್ಪಿಸಿಕೊಡಲಾಗಿದ್ದು, ಸದರಿ ಯೋಜನೆಗೆ ಸರ್ಕಾರದಿಂದ ವಾರ್ಷಿಕ ರೂ.11.20 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗುತ್ತದೆ.

3. ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು:

ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲರಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇಂತಹ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ರಾಜ್ಯದ 30 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಬೆಳಗಾವಿ ಮತ್ತು ಕಲಬುರಗಿ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ 28 ಜಿಲ್ಲೆಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ, ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಿಂದ ನಡೆಸಲಾಗುತ್ತಿದೆ.

*****

ಕರ್ನಾಟಕ ಸರ್ಕಾರ

ಸಂಖ್ಯೆ: ವಇ 42 ಹೆಚ್‌ಎಎಂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ.
ಬೆಂಗಳೂರು, ದಿನಾಂಕ:01.02.2021

147

03/02/2021

ಇಂದ:

ಸರ್ಕಾರದ ಕಾರ್ಯದರ್ಶಿ,
ವಸತಿ ಇಲಾಖೆ
ಬೆಂಗಳೂರು.

ಇವರಿಗೆ:

ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ
ವಿಧಾನ ಸೌಧ.

ಮಾನ್ಯರೆ,

ವಿಷಯ: ಕರ್ನಾಟಕ ವಿಧಾನ ಸಭೆ ಸದಸ್ಯರಾದ ಶ್ರೀ ಶಿವಣ್ಣ ಬಿ. (ಆನೇಕಲ್) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 770ಕ್ಕೆ ಉತ್ತರ ನೀಡುವ ಬಗ್ಗೆ.

ಉಲ್ಲೇಖ: ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ, ಪತ್ರ ಸಂಖ್ಯೆ: ಪ್ರಶಾವಿಸ/15ನೇವಿಸ/9ಅ/-ಚುರ.ಪ್ರಶ್ನೆ/770/2021, ದಿನಾಂಕ:23.01.2021.

ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಶಿವಣ್ಣ ಬಿ. (ಆನೇಕಲ್) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 770ಕ್ಕೆ, ಮಾನ್ಯ ವಸತಿ ಸಚಿವರು ಉತ್ತರಿಸಿರುವ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

1/2

(ಮಾಳಪ್ಪ ವೈ ಕನ್ನೂರ)
ಶಾಖಾಧಿಕಾರಿ-2
ವಸತಿ ಇಲಾಖೆ.

ಕರ್ನಾಟಕ ವಿಧಾನ ಸಭೆ

ಮಾನ್ಯ ಸದಸ್ಯರ ಹೆಸರು	:	ಶ್ರೀ ಶಿವಣ್ಣ .ಬಿ (ಆನೇಕಲ್)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**770**
ಉತ್ತರಿಸಬೇಕಾದ ದಿನಾಂಕ	:	03.02.2021
ಉತ್ತರಿಸಬೇಕಾದ ಸಚಿವರು	:	ವಸತಿ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	ಆನೇಕಲ್ ವಿಧಾನ ಸಭಾ ಕ್ಷೇತ್ರಕ್ಕೆ ವಿವಿಧ ವಸತಿ ಯೋಜನೆಗಳಡಿಯಲ್ಲಿ 2020-21 ನೇ ಸಾಲಿಗೆ ಮಂಜೂರು ಮಾಡಿರುವ ಮನೆಗಳ ಸಂಖ್ಯೆ ಎಷ್ಟು; (ಪೂರ್ಣ ಮಾಹಿತಿ ನೀಡುವುದು)	2020-21ನೇ ಸಾಲಿಗೆ ಕೇಂದ್ರ ಪುರಸ್ಕೃತ ಯೋಜನೆಗಳಾದ ಪ್ರಧಾನ ಮಂತ್ರಿ ಆವಾಸ್ ಯೋಜನೆ(ಗ್ರಾಮೀಣ)ದಡಿ ಸರ್ಕಾರದ ಸುತ್ತೋಲೆ ಸಂಖ್ಯೆ :ವಇ 8 ಹೆಚ್ಎವೈ 2020, ದಿನಾಂಕ :09.11.2020 ರಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ತಲಾ 20 ರಂತೆ ಫಲಾನುಭವಿಗಳ ಆಯ್ಕೆ ಮಾಡುವಂತೆ ಮಾರ್ಗಸೂಚಿಯನ್ನು ಹೊರಡಿಸಲಾಗಿದೆ. ಅದರಂತೆ ಆನೇಕಲ್ ವಿಧಾನ ಸಭಾ ಕ್ಷೇತ್ರದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ತಲಾ 20 ರಂತೆ ಫಲಾನುಭವಿಗಳಿಗೆ ಆಯ್ಕೆ ಮಾಡುವಂತೆ ತಿಳಿಸಿದ್ದು, ಆಯ್ಕೆ ಪ್ರಕ್ರಿಯೆಯು ಪ್ರಗತಿಯಲ್ಲಿದೆ.
(ಆ)	ಪ್ರಸ್ತುತ ವರ್ಷ ಮಂಜೂರು ಮಾಡಿರುವ ಮನೆಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ? (ಮಾಹಿತಿ ನೀಡುವುದು)	

ಸಂಖ್ಯೆ :ವಇ 42 ಹೆಚ್ಎಎಂ 2021

(ವಿ. ಸೋಮಣ್ಣ)
ವಸತಿ ಸಚಿವರು

AHF/ 33 /AID /2021-AHF_SEC_b_AH_ Animal Husbandry Fisheries sec

ಕರ್ನಾಟಕ ಸರ್ಕಾರ

ಸಂಖ್ಯೆ:ಇ–ಪಸಂಮೀ 33 ಸಲೆವಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ:01.02.2021

139
03/2/21

ಇವರಿಂದ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
ಬೆಂಗಳೂರು.

ಇವರಿಗೆ:

ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ,

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ **ಶ್ರೀ ಸತೀಶ್ ಎಲ್ ಜಾರಕಿ ಹೊಳಿ, (ಯಮಕನಮರಡಿ)** ಇವರು ಸದನದಲ್ಲಿ ಮಂಡಿಸಿರುವ ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ: 381 ಕ್ಕೆ ಉತ್ತರಿಸುವ ಬಗ್ಗೆ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ **ಶ್ರೀ ಸತೀಶ್ ಎಲ್ ಜಾರಕಿ ಹೊಳಿ, (ಯಮಕನಮರಡಿ)** ಇವರು ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 381 ಕ್ಕೆ ಕನ್ನಡ ಭಾಷೆಯಲ್ಲಿ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಬಿ.ಎನ್. ಪ್ರವೀಣ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
(ಪಶುಸಂಗೋಪನೆ)

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ಸತೀಶ್ ಎಲ್. ಜಾರಕಿ ಹೊಳಿ, (ಯಮಕನಮರಡಿ)

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 381

ಉತ್ತರಿಸಬೇಕಾದ ದಿನಾಂಕ : 03.02.2021.

ಉತ್ತರಿಸಬೇಕಾದ ಸಚಿವರು : ಮಾನ್ಯ ಪಶುಸಂಗೋಪನೆ ಸಚಿವರು.

ಕ್ರ ಸಂ	ಪ್ರಶ್ನೆಗಳು	ಉತ್ತರಗಳು
ಅ	ಇತ್ತೀಚೆಗೆ ರಾಜ್ಯ ಸರ್ಕಾರ ಗೋಹತ್ಯೆ ನಿಷೇಧ ಜಾರಿಗೆ ತಂದಿರುವುದು ಗಮನಕ್ಕೆ ಬಂದಿದೆಯೇ;	ಗಮನಕ್ಕೆ ಬಂದಿದೆ.
ಆ	ಒಂದು ವೇಳೆ ಅಧಿಕೃತವಾಗಿ ಗೋವುಗಳನ್ನು ವಧೆ ಮಾಡಲು ಇರುವ ಮಾನದಂಡಗಳೇನು?	"ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣೆ ಆಧ್ಯಾದೇಶ 2020"ರ ಅನ್ವಯ ಗೋವುಗಳ ವಧೆಗೆ ಅವಕಾಶ ಇರುವುದಿಲ್ಲ.

ಪಸಂಮೀ ಇ-33 ಸಲೆವಿ 2021

ಪ್ರಭು ಬಿ. ಚವ್ಹಾಣ್
ಪಶುಸಂಗೋಪನೆ ಸಚಿವರು,

ಕರ್ನಾಟಕ ಸರ್ಕಾರ

ಸಂ: ಟಿಡಿ 29 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:02.02.2021.

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

72
3/2/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಖಾದರ್ ಯು.ಟಿ., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 687 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಖಾದರ್ ಯು.ಟಿ., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 687 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,
Mala S 02/02/2021
(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 687
ಸದಸ್ಯರ ಹೆಸರು : ಶ್ರೀ ಖಾದರ್ ಯು.ಟಿ (ಮಂಗಳೂರು)
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 03-02-2021

ಕ್ರ. ಸಂ	ಪ್ರಶ್ನೆ	ಉತ್ತರಗಳು
ಅ)	ಮಂಗಳೂರು ವಿಧಾನಸಭಾ ಕ್ಷೇತ್ರದ ಬಂಟ್ವಾಳ ತಾಲ್ಲೂಕಿನ ಪಜೀರು ಗ್ರಾಮದ ಪಾನೇಲ, ಮೇರಮಜ್ಜಲು ಗ್ರಾಮದ ಅಬ್ಬೆಟ್ಟು, ಮಂಜೇನಾಡಿ ನಾರಿಂಗಣ ಪ್ರದೇಶಗಳಿಗೆ ಬಸ್‌ಗಳ ಸಂಚಾರವಿಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಪಜೀರು ಗ್ರಾಮ ಪಂಚಾಯಿತಿಯ ಪ್ರದೇಶವಾದ ಪಾಣೇಲ ಮಾರ್ಗದಲ್ಲಿ ಸಾರಿಗೆ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ದಿನಾಂಕ:30-01-2021 ರಂದು ಮಾರ್ಗ ಸಮೀಕ್ಷೆ ನಡೆಸಲಾಗಿದ್ದು, ಮಾರ್ಗವು ಸಾರಿಗೆಗಳ ಕಾರ್ಯಾಚರಣೆಗೆ ಯೋಗ್ಯವಾಗಿರುತ್ತದೆ. ಆದರೆ, ಸದರಿ ಮಾರ್ಗದಲ್ಲಿ ಸಾರಿಗೆಗಳ ಕಾರ್ಯಾಚರಣೆಗೆ ಪರವಾನಗಿಗಳ ಅವಶ್ಯಕತೆ ಇರುವುದರಿಂದ, ಪ್ರಾದೇಶಿಕ ಸಾರಿಗೆ ಪ್ರಾಧಿಕಾರ, ಮಂಗಳೂರು, ಇವರಲ್ಲಿ ಪರವಾನಗಿ ಕೋರಿ ಅರ್ಜಿ ಸಲ್ಲಿಸಿ, ಪರವಾನಗಿ ಮಂಜೂರಾದ ನಂತರ ಸಾರಿಗೆ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು. ಕ.ರಾ.ರ.ಸಾ.ನಿಗಮದ ಮಂಗಳೂರು-1ನೇ ಘಟಕದಿಂದ ಅನುಸೂಚಿ ಸಂಖ್ಯೆ-140ರಲ್ಲಿ ಮಂಗಳೂರಿನಿಂದ ಮೇರಮಜಲು-ಅಬ್ಬೆಟ್ಟಿಗೆ ಬೆಳಿಗ್ಗೆ 7:10 ಮತ್ತು ಸಂಜೆ 5:20ಕ್ಕೆ ಹಾಗೂ ಅಬ್ಬೆಟ್ಟು-ಮೇರಮಜಲಿನಿಂದ ಮಂಗಳೂರಿಗೆ ಬೆಳಿಗ್ಗೆ 8:15 ಮತ್ತು ಸಂಜೆ 6:15ಕ್ಕೆ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ. ಸದರಿ ಸಾರಿಗೆಗಳ ಅನುಕೂಲವನ್ನು ಸಾರ್ವಜನಿಕ ಪ್ರಯಾಣಿಕರು ಹಾಗೂ ವಿದ್ಯಾರ್ಥಿಗಳು ಪಡೆದುಕೊಳ್ಳುತ್ತಿದ್ದು, ಅವಶ್ಯಕತೆಗೆ ಅನುಗುಣವಾಗಿದೆ. ಮುಂದುವರೆದು, ಮಂಜನಾಡಿ ಹಾಗೂ ನರಿಂಗಾನ ಗ್ರಾಮ ಪಂಚಾಯತ್‌ನ ಪ್ರದೇಶಗಳು ಈ ಹಿಂದೆ ರಾಷ್ಟ್ರೀಕೃತವಲ್ಲದ ವಲಯದಲ್ಲಿದ್ದು, ಮುಡಿಪು ಮಾರ್ಗವಾಗಿ ಇರಾಕ್ಕೆ ನರ್ಮ್ ಯೋಜನೆಯಡಿಯಲ್ಲಿ ನಗರ ಸಾರಿಗೆ ಕಾರ್ಯಾಚರಣೆ ಮಾಡಲು ಪ್ರಾದೇಶಿಕ ಸಾರಿಗೆ ಪ್ರಾಧಿಕಾರ, ಮಂಗಳೂರು, ಇವರಲ್ಲಿ ಅರ್ಜಿ ಸಲ್ಲಿಸಿ, ಪರವಾನಗಿ ಮಂಜೂರಾಗಿರುತ್ತದೆ. ಸದರಿ ಪರವಾನಗಿಗಳಿಗೆ ಖಾಸಗಿ ವಾಹನಗಳ ಪ್ರವರ್ತಕರು ನ್ಯಾಯಾಲಯದ ತಡೆಯಾಜ್ಞೆ ತಂದಿರುವುದರಿಂದ ಸದರಿ ಮಾರ್ಗದಲ್ಲಿ ಸಾರಿಗೆಯನ್ನು ಕಾರ್ಯಾಚರಿಸಲು ಸಾಧ್ಯವಾಗಿರುವುದಿಲ್ಲ.
ಆ)	ಹಾಗಿದ್ದಲ್ಲಿ, ಈ ಭಾಗದ ವಿದ್ಯಾರ್ಥಿಗಳ, ಹಿರಿಯ ನಾಗರೀಕರ ಅನುಕೂಲಕ್ಕಾಗಿ ಸರ್ಕಾರ ಬಸ್ ಸಂಚಾರವನ್ನು ಕಲ್ಪಿಸಲಾಗುವುದೇ?	

ಸಂಖ್ಯೆ: ಟಿಡಿ 29 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ಸರ್ಕಾರ

ಸಂ:ಮಮಇ/14/ಮಅನಿ/2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:02.02.2021

29
4/S
3/2/21

ಇವರಿಂದ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ / ~~ಪರಿಷತ್~~ ಸಚಿವಾಲಯ,
ವಿಧಾನಸೌಧ,
ಬೆಂಗಳೂರು

ಮಾನ್ಯರೆ,

ವಿಷಯ: ಶ್ರೀ/ಶ್ರೀಮತಿ. ಬಾಲಕೃಷ್ಣ ಸಿ.ಎನ್ (ಶ್ರವಣಬೆಳಗೊಳ) ಮಾನ್ಯ ವಿಧಾನ ಸಭಾ /ವಿ~~ಧಾನ ಪರಿಷತ್~~ ಸದಸ್ಯರು ಇವರು ಮಂಡಿಸಿರುವ ಚುಕ್ಕೆ ~~ಗುರುತಿನ~~ / ಗುರುತಿಲ್ಲದ ಪ್ರಶ್ನೆ ಸಂಖ್ಯೆ:-675-ಕ್ಕೆ ಉತ್ತರಿಸುವ ಕುರಿತು

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ/ಶ್ರೀಮತಿ. ಬಾಲಕೃಷ್ಣ ಸಿ.ಎನ್ (ಶ್ರವಣಬೆಳಗೊಳ) ಮಾನ್ಯ ವಿಧಾನ ಸಭಾ /ವಿ~~ಧಾನ ಪರಿಷತ್~~ ಸದಸ್ಯರು ಇವರು ಮಂಡಿಸಿರುವ ಚುಕ್ಕೆ ~~ಗುರುತಿನ~~ / ಗುರುತಿಲ್ಲದ ಪ್ರಶ್ನೆ ಸಂಖ್ಯೆ:-675-ಕ್ಕೆ ಉತ್ತರವನ್ನು ---25----ಪ್ರತಿಗಳಲ್ಲಿ ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ವಿ.ಭಾಗ್ಯಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-3
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 675

ಮಾನ್ಯ ಸದಸ್ಯರ ಹೆಸರು : ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ)

ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖಾ ಸಚಿವರು

ಉತ್ತರಿಸಬೇಕಾದ ದಿನಾಂಕ : 03-02-2021.

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಹಾಸನ ಜಿಲ್ಲೆಯಲ್ಲಿ ನಿರುದ್ಯೋಗಿ ಮಹಿಳೆಯರನ್ನು ಗುರುತಿಸಲಾಗಿದೆಯೇ; (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)</td><td>ನಿರುದ್ಯೋಗಿಗಳನ್ನು ಗುರುತಿಸುವ ವಿಷಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವ್ಯಾಪ್ತಿಗೆ ಬರುವುದಿಲ್ಲ.</td></tr>
<tr><td>ಆ</td><td>ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಉದ್ಯೋಗಿನಿ ಯೋಜನೆಯ ಅಡಿಯಲ್ಲಿ ಹಾಸನ ಜಿಲ್ಲೆಯಲ್ಲಿ ಎಷ್ಟು ಮಹಿಳಾ ಫಲಾನುಭವಿಗಳನ್ನು ಪ್ರಸಕ್ತ ಸಾಲಿನಲ್ಲಿ ಆಯ್ಕೆ ಮಾಡಲಾಗಿದೆ; (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)</td><td>ಉದ್ಯೋಗಿನಿ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ ಆಯ್ಕೆ ಮಾಡಲಾದ ಮಹಿಳಾ ಫಲಾನುಭವಿಗಳ ಸಂಖ್ಯೆ ಈ ಕೆಳಗಿನಂತೆ ಇರುತ್ತದೆ.
<table>
<tr><th>ಕ್ರಸಂ</th><th>ವಿಧಾನಸಭಾ ಕ್ಷೇತ್ರ</th><th>ಆಯ್ಕೆಮಾಡಲಾದ ಮಹಿಳಾ ಫಲಾನುಭವಿಗಳ ಸಂಖ್ಯೆ</th></tr>
<tr><td>1</td><td>ಅರಸೀಕೆರೆ</td><td>5</td></tr>
<tr><td>2</td><td>ಅರಕಲಗೂಡು</td><td>5</td></tr>
<tr><td>3</td><td>ಬೇಲೂರು</td><td>5</td></tr>
<tr><td>4</td><td>ಚನ್ನರಾಯಪಟ್ಟಣ ಶ್ರವಣಬೆಳಗೊಳ</td><td>5</td></tr>
<tr><td>5</td><td>ಹಾಸನ</td><td>5</td></tr>
<tr><td>6</td><td>ಹೊಳೆನರಸೀಪುರ</td><td>5</td></tr>
<tr><td>7</td><td>ಸಕಲೇಶಪುರ</td><td>5</td></tr>
</table></td></tr>
<tr><td>ಇ</td><td>ಹಾಸನ ಜಿಲ್ಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನಿರುದ್ಯೋಗಿ ಮಹಿಳೆಯರಿದ್ದು, ಪ್ರಸಕ್ತ ಸಾಲಿನಲ್ಲಿ ನಿಗದಿಪಡಿಸಿರುವ ಫಲಾನುಭವಿಗಳ ಸಂಖ್ಯೆ ಕಡಿಮೆ ಇದ್ದು, ಈ ಫಲಾನುಭವಿಗಳ ಸಂಖ್ಯೆಯನ್ನು ಹೆಚ್ಚಿಸಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ; (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)</td><td>ಉದ್ಯೋಗಿನಿ ಯೋಜನೆಯಡಿ ಸರ್ಕಾರ ಒದಗಿಸಿರುವ ಆಯವ್ಯಯದಿಂದ ಹಾಸನ ಜಿಲ್ಲೆಯಲ್ಲಿನ ಮಹಿಳಾ ಜನಸಂಖ್ಯೆಯನ್ನು ಆಧರಿಸಿ ಜಿಲ್ಲೆಗೆ ಭೌತಿಕ ಗುರಿ-35, ಆರ್ಥಿಕ ಗುರಿ-ರೂ.36,56,250/-ಗಳನ್ನು ನಿಗದಿಪಡಿಸಲಾಗಿದೆ.

2021-22ನೇ ಸಾಲಿನ ಅಯವ್ಯಯದಲ್ಲಿ ಸದರಿ ಯೋಜನೆಯಡಿ ಹೆಚ್ಚಿನ ಅನುದಾನ ಕೋರುವ ವಿಷಯ ಪರಿಶೀಲನೆಯಲ್ಲಿದೆ.</td></tr>
<tr><td>ಈ</td><td>ರಾಜ್ಯದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನಿರುದ್ಯೋಗಿ ಮಹಿಳೆಯರಿದ್ದು, ಪ್ರಸಕ್ತ ಸಾಲಿನಲ್ಲಿ ನಿಗದಿಪಡಿಸಿರುವ ಫಲಾನುಭವಿಗಳ ಸಂಖ್ಯೆ ಕಡಿಮೆ ಇದ್ದು, ಈ ಫಲಾನುಭವಿಗಳ ಸಂಖ್ಯೆಯನ್ನು ಹೆಚ್ಚಿಸಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ? (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)</td><td>2020-21ನೇ ಸಾಲಿನಲ್ಲಿ ಉದ್ಯೋಗಿನಿ ಯೋಜನೆಯಡಿ ಸರ್ಕಾರ ಒದಗಿಸಿರುವ ಆಯವ್ಯಯದಿಂದ ರಾಜ್ಯದ ಒಟ್ಟು ಮಹಿಳಾ ಜನಸಂಖ್ಯೆಯನ್ನು ಆಧರಿಸಿ ಭೌತಿಕ ಗುರಿ-1813 ಮತ್ತು ಅರ್ಥಿಕ ಗುರಿ-ರೂ.2000.00 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

2021-22ನೇ ಸಾಲಿನ ಅಯವ್ಯಯದಲ್ಲಿ ಸದರಿ ಯೋಜನೆಯಡಿ ಹೆಚ್ಚಿನ ಅನುದಾನ ಕೋರುವ ವಿಷಯ ಪರಿಶೀಲನೆಯಲ್ಲಿದೆ.</td></tr>
</table>

ಸಂಖ್ಯೆ: ಮಮಇ/14/ಮಅನಿ 2021

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಕರ್ನಾಟಕ ಸರ್ಕಾರ

ಸಂಖ್ಯೆ: ಪಸಂಮೀಇ ಇ-05 ಪಸಸೇ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು ದಿನಾಂಕ: 01.02.2021

67
4/5
03/2/21

ಇವರಿಂದ :-
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
ಬೆಂಗಳೂರು.

ಇವರಿಗೆ :-
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ
ವಿಧಾನ ಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ:- ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ. ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 757 ಕ್ಕೆ ಉತ್ತರ ಒದಗಿಸುವ ಬಗ್ಗೆ.

****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ. ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 757 ಕ್ಕೆ ಕನ್ನಡ ಉತ್ತರದ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿತಳಾಗಿದ್ದೇನೆ.

ತಮ್ಮ ನಂಬುಗೆಯ,

Kavya H. N. 01/02/2021
(ಕಾವ್ಯ ಹೆಚ್.ಎನ್.)
ಶಾಖಾಧಿಕಾರಿ-2
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
(ಪಶುಸಂಗೋಪನೆ-ಎ)
01/2/2021

ಪ್ರತಿ:

ಮಾನ್ಯ ಪಶುಸಂಗೋಪನೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	757
ಸದಸ್ಯರ ಹೆಸರು	:	ಶ್ರೀ.ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ)
ಉತ್ತರಿಸುವ ದಿನಾಂಕ	:	03.02.2021
ಉತ್ತರಿಸುವ ಸಚಿವರು	:	ಪಶುಸಂಗೋಪನೆ ಸಚಿವರು

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
ಅ)	ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಕೆಂಗಾನೂರು, ತುರಕರಶೀಗಿಹಳ್ಳಿ ಮತ್ತು ಸವದತ್ತಿ ತಾಲ್ಲೂಕಿನ ಹಿರೆಬೂದನೂರು ಗ್ರಾಮಗಳಲ್ಲಿ ಪ್ರಾಥಮಿಕ ಪಶುಚಿಕಿತ್ಸಾಲಯದ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
ಆ)	ಬಂದಿದ್ದಲ್ಲಿ, ಪ್ರಾಥಮಿಕ ಪಶುಚಿಕಿತ್ಸಾಲಯ ಪ್ರಾರಂಭಿಸುವ ಕುರಿತು ಇಲ್ಲಿನ ರೈತರು ಹಾಗೂ ಜನಪ್ರತಿನಿಧಿಗಳು ಸರ್ಕಾರಕ್ಕೆ ಮನವಿ ಸಲ್ಲಿಸಿರುವುದು ನಿಜವಲ್ಲವೇ;	ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಹಿರೆಬೂದನೂರು ಗ್ರಾಮಕ್ಕೆ ನೂತನ ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರ ಮಂಜೂರು ಮಾಡುವಂತೆ ಮನವಿ ಸ್ವೀಕೃತಗೊಂಡಿರುತ್ತದೆ. ಆದರೆ ಇಲಾಖೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು ಪ್ರಾರಂಭಿಸುವ ಯಾವುದೇ ಯೋಜನೆ ಇರುವುದಿಲ್ಲ. ಮುಂದುವರೆದು, ರಾಷ್ಟ್ರೀಯ ಕೃಷಿ ಆಯೋಗದ ನೀತಿಯಂತೆ ಪ್ರತಿ 5000 ಜಾನುವಾರು ಘಟಕಕ್ಕೆ ಒಂದು ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರದ ಅವಶ್ಯಕತೆಯಿರುತ್ತದೆ. ಆದರೆ ಕೆಂಗಾನೂರು ಸಮೂಹ ಗ್ರಾಮಗಳಲ್ಲಿ 1506, ತುರಕರಶೀಗಿಹಳ್ಳಿ ಸಮೂಹ ಗ್ರಾಮಗಳಲ್ಲಿ 1796 ಹಾಗೂ ಹಿರೆಬೂದನೂರು ಸಮೂಹ ಗ್ರಾಮಗಳಲ್ಲಿ 2704 ಜಾನುವಾರು ಘಟಕಗಳಿದ್ದು, ಈ ಗ್ರಾಮಗಳ ಜಾನುವಾರು ಆರೋಗ್ಯ ರಕ್ಷಣೆಗೆ ಮತ್ತು ಚಿಕಿತ್ಸೆಗೆ ಸಮೀಪದ ಪಶುವೈದ್ಯ ಸಂಸ್ಥೆಗಳಿಂದ ಸೂಕ್ತ ವ್ಯವಸ್ಥೆ ಮಾಡಲಾಗಿರುತ್ತದೆ.
ಇ)	ಹಾಗಿದ್ದಲ್ಲಿ, ಈ ಗ್ರಾಮಗಳಲ್ಲಿ ಪ್ರಾಥಮಿಕ ಪಶುಚಿಕಿತ್ಸಾಲಯಗಳನ್ನು ಪ್ರಾರಂಭಿಸಿ, ಇಲ್ಲಿನ ರೈತರಿಗೆ ಅನುಕೂಲ ಮಾಡಿಕೊಡಲು ಸರ್ಕಾರವು ಕ್ರಮಕೈಗೊಳ್ಳುವುದೇ?	ಇಲಾಖೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು ಪ್ರಾರಂಭಿಸುವ ಯಾವುದೇ ಯೋಜನೆ ಇರುವುದಿಲ್ಲ.

ಸಂ: ಪಸಂಮೀ ಇ-09 ಪಸಸೇ 2021

(ಪ್ರಭು.ಬಿ.ಚವ್ಹಾಣ್)
ಪಶುಸಂಗೋಪನೆ ಸಚಿವರು

ಕರ್ನಾಟಕ ಸರ್ಕಾರ

ಸಂ: ಟಿಡಿ 27 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:02.02.2021.

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

17
3/02/21

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಡಾ|| ಅಜಯ್ ಧರ್ಮಸಿಂಗ್, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 663 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಡಾ|| ಅಜಯ್ ಧರ್ಮಸಿಂಗ್ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 663 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,
Malas 02/02/2021
(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 663

ಸದಸ್ಯರ ಹೆಸರು : ಡಾ॥ ಅಜಯ್ ಧರ್ಮ ಸಿಂಗ್ (ಜೇವರ್ಗಿ)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 03-02-2021

ಕ್ರ ಸಂ	ಪ್ರಶ್ನೆ	ಉತ್ತರ
ಅ.	ಜೇವರ್ಗಿ ವಿಧಾನಸಭಾ ಕ್ಷೇತ್ರದ ಜೇವರ್ಗಿ ಪಟ್ಟಣದಿಂದ ಶಹಪೂರ ಹಾಗೂ ಜೇವರ್ಗಿ-ಕಲಬುರಗಿ ನಡುವೆ ಸಂಚರಿಸುವ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಬಸ್‌ಗಳು ಆ ಮಾರ್ಗಗಳಲ್ಲಿ ಬರುವಂತಹ ಹಳ್ಳಿಗಳಿಗೆ ನಿಲುಗಡೆ ಮಾಡದೇ ಅಲ್ಲಿನ ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಈ ಕುರಿತಂತೆ ದೂರುಗಳು ಬಂದಿರುವುದಿಲ್ಲ.
ಆ.	ಹಾಗಿದ್ದಲ್ಲಿ, ಸದರಿ ಜೇವರ್ಗಿ ಪಟ್ಟಣದಿಂದ ದಿನನಿತ್ಯ ಸಂಚರಿಸುವ ಶಹಪೂರ ಹಾಗೂ ಕಲಬುರಗಿ ಪಟ್ಟಣಗಳ ಮಧ್ಯೆ ಹಾದು ಹೋಗುವ ಹಳ್ಳಿಗಳಿಗೆ ನಿಲುಗಡೆ ವ್ಯವಸ್ಥೆ ಸಂಬಂಧ ಗ್ರಾಮೀಣ ಸಾರಿಗೆ ಬಸ್‌ಗಳನ್ನು ಬೇಡಿಕೆಗೆ ಅನುಗುಣವಾಗಿ ಸಂಚರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ಪೂರ್ಣ ವಿವರ ನೀಡುವುದು.)	ಪ್ರಸ್ತುತ ಕಲಬುರಗಿ-ಜೇವರ್ಗಿ-ಸುರಪುರ ಮಧ್ಯ ಬರುವ ಎಲ್ಲಾ ಹಳ್ಳಿಗಳಿಗೆ ನಿಲುಗಡೆ ನೀಡಿ "ಸಗರನಾಡು" ಎಂಬ ನಾಮಾಂಕಿತ ವಾಹನಗಳಿಂದ ಪ್ರತಿದಿನ 58 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಮುಂದುವರೆದು ಜೇವರ್ಗಿ-ಕಲಬುರಗಿ ಮಧ್ಯದಲ್ಲಿ 20 ಸಾಮಾನ್ಯ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಜೇವರ್ಗಿ-ಶಹಾಪೂರ ಮಧ್ಯದಲ್ಲಿ 02 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಕಲಬುರಗಿ-ಶಹಾಪೂರ ಮಾರ್ಗದ ಮಧ್ಯದಲ್ಲಿ ಇರುವ ಹಳ್ಳಿಗಳಿಂದ ಯಾವುದೇ ದೂರುಗಳು ಬಂದಿರುವುದಿಲ್ಲ. ಬೇಡಿಕೆಗನುಗುಣವಾಗಿ ಇನ್ನೂ ಹೆಚ್ಚಿನ ಸಾರಿಗೆ ಒದಗಿಸಲಾಗುವುದು.

ಸಂಖ್ಯೆ: ಟಿಡಿ 27 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಪಸಂಮೀ ಇ-05 ಪಸಸೇ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು ದಿನಾಂಕ: 01.02.2021

ಇವರಿಂದ :-
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
ಬೆಂಗಳೂರು.

169
U/S
03/2/21

ಇವರಿಗೆ :-
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ
ವಿಧಾನ ಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ:- ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ. ವೆಂಕಟರಮಣಯ್ಯ (ದೊಡ್ಡಬಳ್ಳಾಪುರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 370 ಕ್ಕೆ ಉತ್ತರ ಒದಗಿಸುವ ಬಗ್ಗೆ.

****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ. ವೆಂಕಟರಮಣಯ್ಯ (ದೊಡ್ಡಬಳ್ಳಾಪುರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 370 ಕ್ಕೆ ಕನ್ನಡ ಉತ್ತರದ 25 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿತಳಾಗಿದ್ದೇನೆ.

ತಮ್ಮ ನಂಬುಗೆಯ,

Kavya H.N. 01/02/2021
(ಕಾವ್ಯ ಹೆಚ್.ಎನ್.)
ಪೀಠಾಧಿಕಾರಿ-2
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
(ಪಶುಸಂಗೋಪನೆ-ಎ)
01/2/2021

ಪ್ರತಿ:

ಮಾನ್ಯ ಪಶುಸಂಗೋಪನೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	370
ಸದಸ್ಯರ ಹೆಸರು	:	ಶ್ರೀ.ವೆಂಕಟರಮಣಯ್ಯ.ಟಿ (ದೊಡ್ಡಬಳ್ಳಾಪುರ)
ಉತ್ತರಿಸುವ ದಿನಾಂಕ	:	03.02.2021
ಉತ್ತರಿಸುವ ಸಚಿವರು	:	ಪಶುಸಂಗೋಪನೆ ಸಚಿವರು

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
ಅ)	ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಪ್ರಾಥಮಿಕ ಪಶು ಚಿಕಿತ್ಸಾಲಯ ಆಸ್ಪತ್ರೆಯು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಬಾಕಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
ಆ)	ಸರ್ಕಾರವು ಮೇಲ್ದರ್ಜೆಗೇರಿಸಲು ಕೈಗೊಂಡ ಕ್ರಮಗಳೇನು?	ಸರ್ಕಾರದ ಆದೇಶ ಸಂಖ್ಯೆ: ಪಸಂಮೀ 278 ಪಸಸೇ 2016, ದಿನಾಂಕ: 09.10.2017 ರನ್ವಯ ರಾಜ್ಯದಲ್ಲಿರುವ ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು 2017-18 ನೇ ಸಾಲಿನಿಂದ 2020-21 ನೇ ಸಾಲಿನವರೆಗೆ ಹಂತ ಹಂತವಾಗಿ ಪಶುಚಿಕಿತ್ಸಾಲಯಗಳನ್ನಾಗಿ ಮೇಲ್ದರ್ಜೆಗೇರಿಸಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿರುತ್ತದೆ. 2017-18 ನೇ ಸಾಲಿನಲ್ಲಿ ಈಗಾಗಲೇ 302 ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು ಪಶುಚಿಕಿತಾಲಯಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದ್ದು, ಈ ಸಂದರ್ಭದಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕಿನ ಜಿಂಕೆಬಚ್ಚಹಳ್ಳಿ ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರವನ್ನು ಪಶುಚಿಕಿತ್ಸಾಲಯವನ್ನಾಗಿ ಮೇಲ್ದರ್ಜೆಗೇರಿಸಲಾಗಿರುತ್ತದೆ. ಉಳಿದಂತೆ 2018-19 ನೇ ಸಾಲಿನಲ್ಲಿ 400 ಹಾಗೂ 2019-20 ನೇ ಸಾಲಿನಲ್ಲಿ 400 ಒಟ್ಟು 800 ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು ಪಶುಚಿಕಿತಾಲಯಗಳನ್ನಾಗಿ ಮೇಲ್ದರ್ಜೆಗೇರಿಸಬೇಕಾಗಿದ್ದು, ಈ ಸಂಬಂಧ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿರುತ್ತದೆ. ಆರ್ಥಿಕ ಇಲಾಖೆಯ ಸಹಮತಿ ದೊರೆತ ನಂತರ

		ಅದ್ಯತೆ ಮೇರೆಗೆ ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು ಪಶು ಚಿಕಿತ್ಸಾಲಯಗಳನ್ನಾಗಿ ಮೇಲ್ದರ್ಜೇಗೇರಿಸಲು ಅಗತ್ಯ ಕ್ರಮ ವಹಿಸಲಾಗುವುದು.

ಸಂಃ ಪಸಂಮೀ ಇ-05 ಪಸಸೇ 2021

(ಪ್ರಭು.ಬಿ.ಚವ್ಹಾಣ್)
ಪಶುಸಂಗೋಪನೆ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/46/ಗ್ರಾಪಂಅ/2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:02-02-2021.

ಇಂದ,

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

4U 105 3/2/21

ಇವರಿಗೆ,

ಕಾರ್ಯದರ್ಶಿಗಳು,
ವಿಧಾನ ಸಭೆ,
ವಿಧಾನ ಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ: ಕರ್ನಾಟಕ ವಿಧಾನ ಸಭೆಯ ಸದಸ್ಯರಾದ ಶ್ರೀ ನಂಜೇಗೌಡ ಕೆ.ವೈ. (ಮಾಲೂರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 733 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ ರವರ ಪತ್ರ ಸಂಖ್ಯೆ:ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.733/2021, ದಿನಾಂಕ: 23.01.2021.

*****

ಕರ್ನಾಟಕ ವಿಧಾನ ಸಭೆಯ ಸದಸ್ಯರಾದ ಶ್ರೀ ನಂಜೇಗೌಡ ಕೆ.ವೈ. (ಮಾಲೂರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 733 ಕ್ಕೆ ಸಂಬಂಧಿಸಿದಂತೆ ಉತ್ತರದ 100 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

Narayana Dep. 2/2/2021

(ಡಿ.ಜಿ. ನಾರಾಯಣ)
ಪೀಠಾಧಿಕಾರಿ (ಗ್ರಾಮ ಪಂಚಾಯಿತಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ:

ಸರ್ಕಾರದ ಅಧೀನ ಕಾರ್ಯದರ್ಶಿ (ಸಮನ್ವಯ) ಗ್ರಾಅಪ ಇಲಾಖೆ. (5 ಪ್ರತಿಗಳು)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	733
ಸದಸ್ಯರ ಹೆಸರು	:	ಶ್ರೀ ನಂಜೇಗೌಡ ಕೆ.ವೈ. (ಮಾಲೂರು)
ಉತ್ತರಿಸುವ ದಿನಾಂಕ	:	03-02-2021.
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯಿತಿಗಳಿಗೆ ಸೃಜನೆಯಾಗಿರುವ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳ ಸಂಖ್ಯೆ ಎಷ್ಟು;	ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29-09-2020 ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112 ರಂತೆ ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದ ಮಾದರಿಯಲ್ಲಿ ಡಾಟಾ ಎಂಟ್ರಿ ಆಪರೇಟರ್ ಹುದ್ದೆಯನ್ನು ನಿರ್ದಿಷ್ಟಪಡಿಸಲಾಗಿದೆ. ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದ ಮಾದರಿಯಲ್ಲಿ ನಿರ್ದಿಷ್ಟಪಡಿಸಿರುವ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ನೇಮಕಾತಿ ಮಾಡಿರುವುದಿಲ್ಲ.
(ಆ)	ಈ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳಷ್ಟು; ಜಿಲ್ಲಾವಾರು ಮಾಹಿತಿ ಒದಗಿಸುವುದು;	ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29-09-2020 ರಲ್ಲಿ ಪ್ರತಿ ಗ್ರಾಮ ಪಂಚಾಯತಿಯ ಹುದ್ದೆಗಳ ಸಂಖ್ಯೆಯನ್ನು ಪ್ರತ್ಯೇಕವಾದ ಸರ್ಕಾರಿ ಆದೇಶದಲ್ಲಿ ಒದಗಿಸುವುದಾಗಿ ತಿಳಿಸಿದ್ದು, ಅದರಂತೆ ಹುದ್ದೆಗಳ ಸಂಖ್ಯೆಯನ್ನು ಗುರುತಿಸಿದ ನಂತರ ಗ್ರಾಮ ಪಂಚಾಯತಿಯ ಕಾರ್ಯದ ಒತ್ತಡ ಆಧರಿಸಿ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ನೇಮಿಸಲು ಕ್ರಮ ಕೈಗೊಳ್ಳಲಾಗುವುದು.
(ಇ)	ಡಾಟಾ ಎಂಟ್ರಿ ಆಪರೇಟರ್ ಖಾಲಿ ಇರುವ ಹುದ್ದೆಗಳಿಗೆ ಯಾವಾಗ ನೇಮಕಾತಿ ಮಾಡಲಾಗುವುದು; (ವಿವರ ಒದಗಿಸುವುದು)	ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆ ಈ ಕೆಳಕಂಡಂತಿದೆ.
(ಈ)	ಸದರಿ ಹುದ್ದೆಗಳಿಗೆ ನಿಗದಿಪಡಿಸಿರುವ ವಿದ್ಯಾರ್ಹತೆ ಮತ್ತು ವೇತನ ಶ್ರೇಣಿಗಳ ವಿವರ ಒದಗಿಸುವುದು?	(1) ಕನ್ನಡವನ್ನು ಒಂದು ಭಾಷೆಯನ್ನಾಗಿ ಪಿ.ಯು.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯಲ್ಲಿ ತೇರ್ಗಡೆ ಹೊಂದಿರಬೇಕು. (2) ಕಂಪ್ಯೂಟರ್ ತರಬೇತಿ ಕೋರ್ಸ್‌ನಲ್ಲಿ ಕೇಂದ್ರ ಅಥವಾ ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದ ಯಾವುದೇ ಸಂಸ್ಥೆಯಿಂದ ಆರು ತಿಂಗಳ ತರಬೇತಿ ಪಡೆದಿರುವ ಪ್ರಮಾಣ ಪತ್ರ ಹೊಂದಿರಬೇಕು. (3) ಆಯ್ಕೆ ಸಮಿತಿಯು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಪ್ರತಿಷ್ಠಿತ ಸಂಸ್ಥೆಗಳ ಮೂಲಕ ನಡೆಸತಕ್ಕದ್ದು; ಮತ್ತು

		(4) ಅರ್ಹತಾ ಪರೀಕ್ಷೆಯಲ್ಲಿ ಪಡೆದ 50% ಅಂಕಗಳನ್ನು ಮತ್ತು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಪಡೆದ 50% ಅಂಕಗಳನ್ನು ಒಳಗೊಂಡಿರುವ ಅರ್ಹತೆಯ ಆಧಾರದ ಮೇಲೆ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಬೇಕು. ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ನೇಮಕಗೊಳ್ಳುವ ನೌಕರರಿಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗಧಿಪಡಿಸುವ ಕನಿಷ್ಠ ವೇತನವನ್ನು ನೀಡಲಾಗುವುದು.

ಸಂ. ಗ್ರಾಅಪ 46 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂ:ಟಿಡಿ 07 ಟಿಡಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:01-02-2021.

175
q/s
3/2/21

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೆ,

ವಿಷಯ: ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:374 ಕ್ಕೆ ಉತ್ತರ ನೀಡುವ ಬಗ್ಗೆ.
ಉಲ್ಲೇಖ: ಪ್ರಶಾವಿಸ/15ನೇವಿಸ/9ಅ/ಪ್ರಸಂ.374/2021, ದಿನಾಂಕ:25-01-2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಯಶವಂತರಾಯಗೌಡ ವಿಠ್ಠಲಗೌಟ ಪಾಟೀಲ್ (ಇಂಡಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:374ಕ್ಕೆ ಸಂಬಂಧಿಸಿದ ಉತ್ತರದ ಕನ್ನಡ ಭಾಷೆಯ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ಮುಂದುವರೆದು, ಸದರಿ ಉತ್ತರವನ್ನು dsqb-kla-kar@nic.in ಇ-ಮೇಲ್ ಮುಖಾಂತರ ಕಳುಹಿಸಲಾಗಿದೆ.

ತಮ್ಮ ನಂಬುಗೆಯ,
01/02/21
(ರಂಗಪ್ಪ ಕರಿಗಾರ)
ಶಾಖಾಧಿಕಾರಿ, ಸಾರಿಗೆ-2,
ಸಾರಿಗೆ ಇಲಾಖೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ	:	374
ಸದಸ್ಯರ ಹೆಸರು	:	ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್ (ಇಂಡಿ)
ಉತ್ತರಿಸಬೇಕಾದ ಸಚಿವರು	:	ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸಬೇಕಾದ ದಿನಾಂಕ	:	03-02-2021

<table>
<tr><th>ಕ್ರ ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ವಿಜಯಪುರ ಜಿಲ್ಲೆಯು ಒಟ್ಟು 13 ತಾಲ್ಲೂಕುಗಳನ್ನು ಒಳಗೊಂಡ ಭೌಗೋಳಿಕವಾಗಿ ಅತ್ಯಂತ ದೊಡ್ಡ ಜಿಲ್ಲೆಯಾಗಿರುವುದನ್ನು ಸರ್ಕಾರ ಗಮನಿಸಿದೆಯೇ;</td><td rowspan="2">ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ.</td></tr>
<tr><td>(ಆ)</td><td>ಹಾಗಿದ್ದಲ್ಲಿ, ಜಿಲ್ಲೆಯಲ್ಲಿಯೇ 2ನೇ ದೊಡ್ಡ ಪಟ್ಟಣವಾಗಿರುವ ಹಾಗೂ ತಾಲ್ಲೂಕು ಕೇಂದ್ರವಾಗಿರುವ ಇಂಡಿ ಪಟ್ಟಣದಲ್ಲಿ ಸಹಾಯಕ / ಪ್ರಾದೇಶಿಕ ಸಾರಿಗೆ ಆಯುಕ್ತರ ಕಛೇರಿ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td></tr>
<tr><td>(ಇ)</td><td>ಸದರಿ ಕಛೇರಿ ಇಲ್ಲದಿರುವುದರಿಂದ ಇಂಡಿ, ಚಡಚಣ, ಸಿಂಧಗಿ ಮತ್ತು ಆಲಮೇಲ ಈ ಭಾಗದ ಸಾರ್ವಜನಿಕರು ತಮ್ಮ ಮೋಟಾರ್ ಸೈಕಲ್, ಕಾರು, ಜೀಪು ಮೊದಲಾದ ಸಾರಿಗೆ ವಾಹನಗಳನ್ನು ನೋಂದಾವಣೆ ಮಾಡಿಸಲು ಮಹಾರಾಷ್ಟ್ರ ರಾಜ್ಯದ ಸೊಲ್ಲಾಪುರಕ್ಕೆ ಹೋಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ;</td><td>ಅಂತಹ ಪ್ರಕರಣಗಳು ಕಂಡು ಬಂದಿರುವುದಿಲ್ಲ. ಆದಾಗ್ಯೂ ಪ್ರತಿ ತಿಂಗಳು ವಿಜಯಪುರ ಜಿಲ್ಲೆಯಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಯಾವುದೇ ತೊಂದರೆಯಾಗದಂತೆ ಈ ಕೆಳಕಂಡಂತೆ ಶಿಬಿರಗಳನ್ನು ನಡೆಸಲಾಗುತ್ತಿದೆ.
<table>
<tr><th>ಕ್ರ. ಸಂ.</th><th>ಸ್ಥಳ</th><th>ದಿನಾಂಕ</th></tr>
<tr><td>1.</td><td>ಇಂಡಿ</td><td>2ನೇ ತಾರೀಖು</td></tr>
<tr><td>2.</td><td>ಸಿಂಧಗಿ</td><td>4ನೇ ತಾರೀಖು</td></tr>
<tr><td>3.</td><td>ಮುದ್ದೇಬಿಹಾಳ</td><td>7ನೇ ತಾರೀಖು</td></tr>
<tr><td>4.</td><td>ಕೋಲಾರ</td><td>10ನೇ ತಾರೀಖು</td></tr>
<tr><td>5.</td><td>ಬಸವನಬಾಗೇವಾಡಿ</td><td>14ನೇ ತಾರೀಖು</td></tr>
<tr><td>6.</td><td>ಆಲಮಟ್ಟಿ</td><td>17ನೇ ತಾರೀಖು</td></tr>
<tr><td>7.</td><td>ತಾಳಿಕೋಟೆ</td><td>25ನೇ ತಾರೀಖು</td></tr>
</table></td></tr>
</table>

(ಈ)	ಸೊಲ್ಲಾಪುರದಲ್ಲಿ ನೋಂದಾಯಿಸಿ ಕರ್ನಾಟಕದಲ್ಲಿ ಸಂಚರಿಸುತ್ತಿರುವುದರಿಂದ ರಾಜ್ಯದ ಬೊಕ್ಕಸಕ್ಕೆ ನಷ್ಟ ಉಂಟಾಗುವುದಿಲ್ಲವೇ;	ವಿಜಯಪುರ ಜಿಲ್ಲೆ ತಾಲ್ಲೂಕುಗಳಲ್ಲಿ ಪ್ರತಿ ತಿಂಗಳು ಶಿಬಿರಗಳನ್ನು ನಡೆಸಲಾಗುತ್ತಿರುವುದರಿಂದ ವಾಹನಗಳು ಸೊಲ್ಲಾಪುರದಲ್ಲಿ ನೋಂದಣಿಯಾಗುವ ಪ್ರಮೇಯ ಉಂಟಾಗುವುದಿಲ್ಲ.
(ಉ)	ಸಾರ್ವಜನಿಕರಿಗೆ ಅನುಕೂಲವಾಗುವಂತೆ ಹಾಗೂ ರಾಜ್ಯ ಸರ್ಕಾರದ ಬೊಕ್ಕಸಕ್ಕೆ ಆದಾಯ ಹೆಚ್ಚಿಸಲು ಅನುಕೂಲವಾಗುವಂತೆ ಇಂಡಿ ಪಟ್ಟಣದಲ್ಲಿ ಪ್ರಾದೇಶಿಕ ಸಾರಿಗೆ ಕಛೇರಿಯನ್ನು ಪ್ರಾರಂಭಿಸಲು ಪ್ರಸ್ತಾವನೆಯು ಸರ್ಕಾರಕ್ಕೆ ಬಂದಿರುವುದು ನಿಜವೇ;	ವಿಜಯಪುರ ಜಿಲ್ಲೆಯ ಇಂಡಿ ಅಥವಾ ಸಿಂಧಗಿ ಪಟ್ಟಣದಲ್ಲಿ ಹೊಸ ಕಛೇರಿಯನ್ನು ಪ್ರಾರಂಭಿಸುವ ಕುರಿತು ಪ್ರಸ್ತಾವನೆ ಸ್ವೀಕೃತವಾಗಿದ್ದು, ಪರಿಶೀಲನೆಯಲ್ಲಿರುತ್ತದೆ.
(ಊ)	ಇಂಡಿ ಪಟ್ಟಣದಲ್ಲಿ ಪ್ರಾದೇಶಿಕ ಸಾರಿಗೆ ಆಯುಕ್ತರ ಕಛೇರಿಯನ್ನು ಪ್ರಾರಂಭಿಸಲು ಸರ್ಕಾರ ಆಸಕ್ತಿ ಹೊಂದಿದೆಯೇ; ಹೊಂದಿದ್ದರೆ, ಯಾವಾಗ ಮತ್ತು ಯಾವ ಕಾಲಮಿತಿಯೊಳಗೆ ಮಂಜೂರಾತಿ ನೀಡಲಾಗುವುದು? (ವಿವರ ನೀಡುವುದು)	

ಟಿಡಿ 07 ಟಿಡಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು.

ಕರ್ನಾಟಕ ಸರ್ಕಾರ

ಸಂಖ್ಯೆ: MWD 20 LMQ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 02-02-2021.

ಇವರಿಂದ,
ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ,
ಬೆಂಗಳೂರು.

U/S 114 3/2/21

ಇವರಿಗೆ,
ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ
ಬೆಂಗಳೂರು.

ಮಾನ್ಯರೇ,

ವಿಷಯ : ಶ್ರೀ ಪ್ರಿಯಾಂಕ್ ಎಂ.ಖರ್ಗೆ (ಚಿತ್ತಾಪುರ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 707 ಉತ್ತರಿಸುವ ಬಗ್ಗೆ.

*****

ಶ್ರೀ ಪ್ರಿಯಾಂಕ್ ಎಂ.ಖರ್ಗೆ (ಚಿತ್ತಾಪುರ) ಮಾನ್ಯ ವಿಧಾನ ಸಭೆ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 707 ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಗೆ ಸಂಬಂಧಿಸಿದ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ

ತಮ್ಮ ವಿಶ್ವಾಸಿ,

(ಎಸ್.ಎಜಾಸ್ ಪಾಷ)
ಶಾಖಾಧಿಕಾರಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್
ಮತ್ತು ವಕ್ಫ್ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ – 707
ಉತ್ತರಿಸಬೇಕಾದ ದಿನಾಂಕ – 03–02–2021
ಸದಸ್ಯರ ಹೆಸರು – ಶ್ರೀ. ಪ್ರಿಯಾಂಕ್‌ಎಂ.ಖರ್ಗೆ (ಚಿತ್ತಾಪುರ)
ಉತ್ತರಿಸುವ ಸಚಿವರು – ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	2019–20 ಮತ್ತು 2020–21ನೇ ಸಾಲಿನ ಸಿ.ಎಮ್.ಎಮ್.ಡಿ.ಪಿ. ಯೋಜನೆಯಡಿಯಲ್ಲಿ ಚಿತ್ತಾಪೂರ ತಾಲ್ಲೂಕಿಗೆ ಎಷ್ಟು ಅನುದಾನ ಬಿಡುಗಡೆಗೊಳಿಸಲಾಗಿದೆ; ಬಿಡುಗಡೆಗೊಳಿಸದಿದ್ದಲ್ಲಿ, ಕಾರಣವೇನು? (ವಿವರ ನೀಡುವುದು)	2019–20 ಮತ್ತು 2020–21ನೇ ಸಾಲಿನ ಸಿ.ಎಂ.ಎಂ.ಡಿ.ಪಿ ಯೋಜನೆಯಡಿಯಲ್ಲಿ ಚಿತ್ತಾಪುರ ತಾಲ್ಲೂಕಿಗೆ ಯಾವುದೇ ಅನುದಾನವನ್ನು ಬಿಡುಗಡೆಗೊಳಿಸಲಾಗಿರುವುದಿಲ್ಲ. * 2019–20ನೇ ಸಾಲಿನಲ್ಲಿ ಮುಂದುವರೆದ ಕಾಮಗಾರಿಗಳನ್ನು ಪೂರ್ಣಗೊಳಿಸಲು ಮಾತ್ರ ಆಯವ್ಯಯದಲ್ಲಿ ಅನುದಾನವನ್ನು ಒದಗಿಸಲಾಗಿರುತ್ತದೆ. * 2020–21ನೇ ಸಾಲಿನಲ್ಲಿ ಮಾನ್ಯ ಮುಖ್ಯ ಮಂತ್ರಿಗಳ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ (ಸಿ.ಎಂ.ಎಂ.ಡಿ.ಪಿ) ಆಯವ್ಯಯದಲ್ಲಿ ಯಾವುದೇ ಅನುದಾನವನ್ನು ಒದಗಿಸಿರುವುದಿಲ್ಲ.

ಸಂಖ್ಯೆ:MWD 20 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ
ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/47/ಗ್ರಾಪಂಅ/2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:01-02-2021.

ಇಂದ,

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

ಇವರಿಗೆ,

ಕಾರ್ಯದರ್ಶಿಗಳು,
ವಿಧಾನ ಸಭೆ,
ವಿಧಾನ ಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ: ಕರ್ನಾಟಕ ವಿಧಾನ ಸಭೆಯ ಸದಸ್ಯರಾದ ಶ್ರೀ ಸುಕುಮಾರ್ ಶೆಟ್ಟಿ ಬಿ.ಎಂ. (ಬೈಂದೂರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 712 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ ರವರ ಪತ್ರ ಸಂಖ್ಯೆ:ಪ್ರಶಾವಿಸ/15ನೇವಿಸ/9ಅ/ಪ್ರ.ಸಂ.712/2021, ದಿನಾಂಕ: 23.01.2021.

*****

ಕರ್ನಾಟಕ ವಿಧಾನ ಸಭೆಯ ಸದಸ್ಯರಾದ ಶ್ರೀ ಸುಕುಮಾರ್ ಶೆಟ್ಟಿ ಬಿ.ಎಂ. (ಬೈಂದೂರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 712 ಕ್ಕೆ ಸಂಬಂಧಿಸಿದಂತೆ ಉತ್ತರದ 100 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಡಿ.ಜಿ. ನಾರಾಯಣ)
ಪೀಠಾಧಿಕಾರಿ (ಗ್ರಾಮ ಪಂಚಾಯಿತಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ:

ಸರ್ಕಾರದ ಅಧೀನ ಕಾರ್ಯದರ್ಶಿ (ಸಮನ್ವಯ) ಗ್ರಾಅಪ ಇಲಾಖೆ. (5 ಪ್ರತಿಗಳು)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	712
ಸದಸ್ಯರ ಹೆಸರು	:	ಶ್ರೀ ಸುಕುಮಾರ್ ಶೆಟ್ಟಿ ಬಿ.ಎಂ. (ಬೈಂದೂರು)
ಉತ್ತರಿಸುವ ದಿನಾಂಕ	:	03-02-2021.
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರಸಂ	ಪ್ರಶ್ನೆ	ಉತ್ತರ
(ಅ)	ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಭೂ ಪರಿವರ್ತನೆ ಸ್ಥಳಗಳನ್ನು ಇ ಸ್ವತ್ತು ಮೂಲಕ ನಮೂನೆ 9 ಮತ್ತು 11 ಎ ಪಡೆದ ನಂತರ ಅಂತಹ ಸ್ಥಳಗಳನ್ನು ವಿಭಾಗ ಮಾಡಿ 9 ಮತ್ತು 11 ಎ ಪಡೆಯಲು ಇರುವ ಮಾರ್ಗಸೂಚಿಗಳೇನು;(ವಿವರ ನೀಡುವುದು)	ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 ಮತ್ತು 11ಎ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ನಮೂನೆ-9 ಮತ್ತು 11ಎ ವಿತರಿಸುತ್ತಾರೆ.
(ಆ)	ಭೂ ಪರಿವರ್ತನೆಯಾಗಿ ಇ ಸ್ವತ್ತು ಮೂಲಕ ನಮೂನೆ 9 ಮತ್ತು 11 ಎ ಪಡೆದ ನಂತರ ಕುಟುಂಬದ ಒಳಗೆ ಸ್ಥಳ ವಿಭಾಗ ಮಾಡಲು ಅಥವಾ ಸ್ಥಳ ವಿಭಾಗ ಮಾಡಿ ಮಾರಾಟಕ್ಕೆ ಅವಕಾಶವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ನಮೂನೆ-9 ಮತ್ತು 11ಎ ಯನ್ನು ಪಡೆದ ನಂತರ ಆಸ್ತಿಯ ಮಾಲೀಕರು ಕುಟುಂಬದೊಳಗೆ ಆಸ್ತಿ ವಿಭಾಗ ಮಾಡಿಕೊಂಡಲ್ಲಿ ಸಕ್ಷಮ ಪ್ರಾಧಿಕಾರದಿಂದ ಅಂದರೆ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ನಗರಾಭಿವೃದ್ಧಿ ಪ್ರಾಧಿಕಾರ / ಯೋಜನಾ ಪ್ರಾಧಿಕಾರಿಗಳಿಂದ ನಕ್ಷೆ ಅನುಮೋದನೆ ಪಡೆಯುವುದರಿಂದ ವಿನಾಯಿತಿ ನೀಡಲಾಗಿದೆ.
(ಇ)	ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ತೆಗೆದುಕೊಂಡು ಕ್ರಮಗಳೇನು?	ನಮೂನೆ-9 ಮತ್ತು 11ಎ ಯನ್ನು ಪಡೆದ ನಂತರ ಆಸ್ತಿಯ ಮಾಲೀಕರು ವಿಭಾಗ ಮಾಡಿಕೊಂಡು ಮಾರಾಟ ಮಾಡಬೇಕಾದರೆ ಸಕ್ಷಮ ಪ್ರಾಧಿಕಾರದಿಂದ ಅಂದರೆ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ನಗರಾಭಿವೃದ್ಧಿ ಪ್ರಾಧಿಕಾರ / ಯೋಜನಾ ಪ್ರಾಧಿಕಾರಿಗಳಿಂದ ನಕ್ಷೆ ಅನುಮೋದನೆ ಪಡೆಯಬೇಕಾಗುತ್ತದೆ. ನಕ್ಷೆ ಅನುಮೋದನೆ ಪಡೆಯದೆ ಸ್ಥಳ ವಿಭಾಗ ಮಾಡಿ ಮಾರಾಟ ಮಾಡಲು ಅವಕಾಶವಿರುವುದಿಲ್ಲ.

ಸಂ. ಗ್ರಾಅಪ 47 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂ: ಟಿಡಿ 31 ಟಿಸಿಕ್ಯೂ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: .02.2021.

155
03-02-2021

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಾರಿಗೆ ಇಲಾಖೆ,
ಬೆಂಗಳೂರು

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಶ್ರೀನಿವಾಸ ಎಂ., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 704 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ವಿಸಪ್ರಶಾ/15ನೇವಿಸ/9ಅ/ಚುಗು-ಚುರ.ಪ್ರಶ್ನೆ/04/2021, ದಿನಾಂಕ: 27.01.2021.

******

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಶ್ರೀನಿವಾಸ ಎಂ., ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 704 ಕ್ಕೆ ದಿನಾಂಕ:03.02.2021ರಂದು ಸದನದಲ್ಲಿ ಉತ್ತರ ನೀಡುವ ಸಲುವಾಗಿ ಕನ್ನಡ ಭಾಷೆಯ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,
Mala S. 01/02/2021
(ಮಾಲಾ ಎಸ್.)
ಶಾಖಾಧಿಕಾರಿ,
ಸಾರಿಗೆ-1 ಶಾಖೆ, ಸಾರಿಗೆ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 704

ಸದಸ್ಯರ ಹೆಸರು : ಶ್ರೀ ಶ್ರೀನಿವಾಸ್ ಎಂ. (ಮಂಡ್ಯ)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 03-02-2021

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಮಂಡ್ಯ ವಿಧಾನಸಭಾ ಕ್ಷೇತ್ರದ ಗ್ರಾಮಾಂತರ ಪ್ರದೇಶದಲ್ಲಿ ಸಾರಿಗೆ ವ್ಯವಸ್ಥೆ ಸರಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಮಂಡ್ಯ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು 183 ಗ್ರಾಮಗಳಿದ್ದು, ಇವುಗಳ ಪೈಕಿ 176 ಗ್ರಾಮಗಳಿಗೆ ಕ.ರಾ.ರ.ಸಾ.ನಿಗಮದ ವತಿಯಿಂದ 128 ಅನುಸೂಚಿಗಳಿಂದ 441 ಸುತ್ತುವಳಿಗಳ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ. ಉಳಿದ 7 ಗ್ರಾಮಗಳ ಪೈಕಿ 2 ಗ್ರಾಮಗಳಾದ ಗೇರಹಳ್ಳಿ ಮತ್ತು ತ್ರಿಯಂಬಕಪುರ ದಾಖಲೆ ಗ್ರಾಮಗಳಾಗಿದ್ದು, ಯಾವುದೇ ಮನೆ/ಜನವಸತಿ ಇರುವುದಿಲ್ಲ. ಇನ್ನುಳಿದ 5 ಗ್ರಾಮಗಳಾದ ಮುದ್ದನಘಟ್ಟ, ಕೆಂಚನಹಳ್ಳಿ, ಕೊಡಗಹಳ್ಳಿ, ಗುಂಡಾಪುರ, ಗುತ್ತಗಾನಹಳ್ಳಿಗೆ ಸಾರಿಗೆ ಸೌಲಭ್ಯ ಕಲ್ಪಿಸಲು ಭಾರಿ ವಾಹನಗಳ ಕಾರ್ಯಾಚರಣೆಗೆ ಯೋಗ್ಯ ರಸ್ತೆ ಸೌಲಭ್ಯವಿರುವುದಿಲ್ಲ. ಅಲ್ಲದೆ, ಈ ಕ್ಷೇತ್ರದ ವ್ಯಾಪ್ತಿಯಲ್ಲಿ ಖಾಸಗಿ ಸಾರಿಗೆಗಳ ಪ್ರವರ್ತಕರು ಸಹ ಸಾರಿಗೆಗಳನ್ನು ಕಾರ್ಯಾಚರಿಸುತ್ತಿದ್ದಾರೆ.
ಆ)	ಬಂದಿದ್ದಲ್ಲಿ, ಅವ್ಯವಸ್ಥೆಯಿಂದ ಕೂಡಿರುವ ಈ ಸಾರಿಗೆ ವ್ಯವಸ್ಥೆಯನ್ನು ಇನ್ನೂ ಸರಿಪಡಿಸದಿರಲು ಕಾರಣವೇನು?	ಪ್ರಸ್ತುತ ನಿಗಮದ ವತಿಯಿಂದ ಕಲ್ಪಿಸಿರುವ ಸಾರಿಗೆ ಸೌಲಭ್ಯ ಅವಶ್ಯಕತೆಗೆ ಅನುಗುಣವಾಗಿದೆ. ಮಾರ್ಚ್-2020ರ ಮಾಹೆಯಲ್ಲಿ ಕೋವಿಡ್-19 ಹಿನ್ನೆಲೆಯಲ್ಲಿ ಸಾರಿಗೆಗಳ ಕಾರ್ಯಾಚರಣೆ ಸ್ಥಗಿತಗೊಳಿಸಿದ್ದು, ಲಾಕ್‌ಡೌನ್ ತೆರವುಗೊಳಿಸಿದ ನಂತರ ಪ್ರಯಾಣಿಕರು ಕಡಿಮೆ ಸಂಖ್ಯೆಯಲ್ಲಿ ಓಡಾಡುತ್ತಿದ್ದು, ಜನಸಂದಣಿಗನುಗುಣವಾಗಿ ಸಾರಿಗೆಗಳನ್ನು ಆಚರಣೆ ಮಾಡಲಾಗುತ್ತಿದೆ. ಪ್ರಸ್ತುತ ಹಲವಾರು ಶಾಲೆಗಳು ಪ್ರಾರಂಭವಾಗದಿರುವುದರಿಂದ, ಪ್ರಯಾಣಿಕರ ಲಭ್ಯತೆಗೆ ಅನುಗುಣವಾಗಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸುತ್ತಿದ್ದು, ಪ್ರಯಾಣಿಕರ/ವಿದ್ಯಾರ್ಥಿಗಳ ದಟ್ಟಣಿ ಮತ್ತು ಅವಶ್ಯಕತೆಗೆ ಅನುಗುಣವಾಗಿ ಹಂತಹಂತವಾಗಿ ಸಾರಿಗೆಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.

ಸಂಖ್ಯೆ: ಟಿಡಿ 31 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು

AHF/ 23 /AID /2021-AHF_SEC_b_AH_ Animal Husbandry Fisheries sec

ಕರ್ನಾಟಕ ಸರ್ಕಾರ

ಸಂಖ್ಯೆ:ಇ-ಪಸಂಮೀ 23 ಸಲೆವಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ:01.02.2021

90
u/s
3/2/21

ಇವರಿಂದ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
ಬೆಂಗಳೂರು.

ಇವರಿಗೆ:

ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನ ಸೌಧ,

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ **ಮಂಜುನಾಥ. ಹೆಚ್.ಪಿ (ಹುಣಸೂರು)** ಇವರು ಸದನದಲ್ಲಿ ಮಂಡಿಸಿರುವ ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ: 695 ಕ್ಕೆ ಉತ್ತರಿಸುವ ಬಗ್ಗೆ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ **ಮಂಜುನಾಥ. ಹೆಚ್.ಪಿ (ಹುಣಸೂರು)** ಇವರು ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 695 ಕ್ಕೆ ಕನ್ನಡ ಭಾಷೆಯಲ್ಲಿ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ

(ಬಿ.ಎಸ್. ಪ್ರವೀಣ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
(ಪಶುಸಂಗೋಪನೆ)

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ಮಂಜುನಾಥ. ಹೆಚ್.ಪಿ (ಹುಣಸೂರು)

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 695

ಉತ್ತರಿಸಬೇಕಾದ ದಿನಾಂಕ : 03.02.2021.

ಉತ್ತರಿಸಬೇಕಾದ ಸಚಿವರು : ಮಾನ್ಯ ಪಶುಸಂಗೋಪನೆ ಸಚಿವರು.

<table>
<tr><th>ಕ್ರ.ಸಂ</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ</td><td>ಪಶುಸಂಗೋಪನೆ ಇಲಾಖೆ ವತಿಯಿಂದ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಯಾವುವು: (ಯೋಜನೆಗಳವಾರು ವಿವರ ನೀಡುವುದು)</td><td>ಅನುಬಂಧ-1 ರಲ್ಲಿ ಲಗತ್ತಿಸಿದೆ</td></tr>
<tr><td>ಆ</td><td>ಈ ಇಲಾಖೆಯ ವತಿಯಿಂದ ವಿವಿಧ ಯೋಜನೆಗಳಡಿಯಲ್ಲಿ ಹುಣಸೂರು ವಿಧಾನಸಭಾ ಕ್ಷೇತ್ರಕ್ಕೆ ಕಳೆದ ಮೂರು ವರ್ಷಗಳಿಂದ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದಿಂದ ಮಂಜೂರು ಮಾಡಲಾದ ಅನುದಾನವೆಷ್ಟು</td><td>
<table>
<tr><th colspan="4">ರೂ.ಲಕ್ಷಗಳಲ್ಲಿ</th></tr>
<tr><th>ವರ್ಷ</th><th>ರಾಜ್ಯ</th><th>ಕೇಂದ್ರ</th><th>ಒಟ್ಟು</th></tr>
<tr><td>2017-18 - ಸಾಲಿನಲ್ಲಿ</td><td>92.58</td><td>5.25</td><td>97.83</td></tr>
<tr><td>2018-19- ಸಾಲಿನಲ್ಲಿ</td><td>163.83</td><td>10.2</td><td>174.03</td></tr>
